KA / BG-GPO /2515 / WPP-47 / 2009-2011

ALTERNATIVE LAW FORUM
BANGALORE

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೪	ಬೆಂಗಳೂರು, ಗುರುವಾರ, ಜೂನ್ ೧೧, ೨೦೦೯ (ಜ್ಯೇಷ್ಠ ೨೧, ಶಕವರ್ಷ ೧೯೩೧)	ಸಂಚಿಕೆ ೨೪

ವಿಷಯಸೂಚಿ

ಸಂಖ್ಯೆ	ದಿನಾಂಕ	ಅಧಿಸೂಚನೆ ಸಂಖ್ಯೆ, ದಿನಾಂಕ ಮತ್ತು ವಿವರ
361	1.6.2009	ಸಂ. ಆಇ 324 ವೆಚ್ಚ-12/09, ದಿ. 11.5.2009 – ಸಮಾಜ ಕಲ್ಯಾಣ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಡಿ ವಿನಾಯಿತಿ ನೀಡುವ ಕುರಿತು.
362	1.6.2009	ಸಂ. ಆಇ 296 ವೆಚ್ಚ-12/09, ದಿ. 12.5.2009 – ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಡಿ ವಿನಾಯಿತಿ ನೀಡುವ ಕುರಿತು.
363	1.6.2009	ಸಂ. ಆಇ 366 ವೆಚ್ಚ-12/09, ದಿ. 14.5.2009 – ಒಳಾಡಳಿತ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಡಿ ವಿನಾಯಿತಿ ನೀಡುವ ಕುರಿತು.
364	1.6.2009	ಸಂ. ಆಇ 384 ವೆಚ್ಚ-12/09, ದಿ. 14.5.2009 – ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಡಿ ವಿನಾಯಿತಿ ನೀಡುವ ಕುರಿತು.
365	1.6.2009	ಸಂ. ಆಇ 545 ವೆಚ್ಚ-12/09, ದಿ. 14.5.2009 – ಜಲಸಂಪನ್ಮೂಲ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಡಿ ವಿನಾಯಿತಿ ನೀಡುವ ಕುರಿತು.
366	1.6.2009	ಸಂ. ಆಇ 294 ವೆಚ್ಚ-12/09, ದಿ. 15.5.2009 – ಕರ್ನಾಟಕ ವಿಧಾನಸಭೆ ಸಚಿವಾಲಯಕ್ಕೆ ಪಾರದರ್ಶಕತೆ ಕಾಯ್ದೆಯಡಿ ವಿನಾಯಿತಿ ನೀಡುವ ಕುರಿತು.
367	1.6.2009	ಸಂ. ಆಇ 482 ವೆಚ್ಚ-12/09, ದಿ. 19.5.2009 – ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಡಿ ವಿನಾಯಿತಿ ನೀಡುವ ಕುರಿತು.
368	1.6.2009	ಸಂ. ಆಇ 185 ವೆಚ್ಚ-12/09, ದಿ. 20.5.2009 – ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಡಿ ವಿನಾಯಿತಿ ನೀಡುವ ಕುರಿತು.
369	1.6.2009	GO No. RD 198 LGB 2000, Dt. 17.12.2008 – Grant of Govt. Land in Sy. No. 55 of Taralu Village, Utharahalli Hobli.
370	1.6.2009	ಸಂ. ಗ್ರಾಅಪ/73/ಗ್ರಾಪಸ/2008, ದಿ. 2.4.2009 – ಸುತ್ತೋಲೆ – ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆಗಳು.
371	2.6.2009	No. UDD 1 TCT 2009, Dt. 30.5.2009 – Karnataka Municipal Corporations (Amendment) Rules, 2009.
372	2.6.2009	ಸಂ. ಸಿಐ 655 ಎಸ್‌ಪಿಕ್ಯೂ 2008, ದಿ. 2.6.2009 – ಬಿ.ಎಂ.ಐ.ಸಿ.ಪಿ. ಯೋಜನೆಗಾಗಿ ಕೆ.ಐ.ಎ.ಡಿ. ಕಾಯ್ದೆ ಕಲಂ 28(4)ರ ಮೇರೆಗೆ ಅಧಿಸೂಚನೆ.
373	2.6.2009	ಸಂ. ಸಿಐ 175 ಎಸ್‌ಪಿಕ್ಯೂ 2009, ದಿ. 2.6.2009 – ಬಿ.ಎಂ.ಐ.ಸಿ.ಪಿ. ಯೋಜನೆಗೆ ಸಂಬಂಧಿಸಿದಂತೆ ಕೆ.ಐ.ಎ.ಡಿ. ಕಾಯ್ದೆ ಕಲಂ 3(1), 1(3), 28(1)ರ ಪ್ರಾಥಮಿಕ ಅಧಿಸೂಚನೆ.
374	2.6.2009	ಸಂ. ಸಂವ್ಯಶಾಇ 26 ಶಾಸನ 2008, ದಿ. 2.6.2009 – ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ ಅಧ್ಯಾದೇಶ, 2009.
375	2.6.2009	ಸಂ. ಸಂವ್ಯಶಾಇ 27 ಶಾಸನ 2008, ದಿ. 2.6.2009 – ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳ ಅಧ್ಯಾದೇಶ, 2009.
376	3.6.2009	ಸಂ. ಅ1/ಪ್ರೌಶಾಶಿನೇ01/2009-10, ದಿ. 30.5.2009 – ತಿದ್ದುಪಡಿ ನೇಮಕಾತಿ ಅಧಿಸೂಚನೆ.
377	3.6.2009	ಸಂ. ಸಿಐ 658 ಎಸ್‌ಪಿಕ್ಯೂ 2008, ದಿ. 2.6.2009 – ಬೆಂಗಳೂರು ಮೆಟ್ರೋ ಯೋಜನೆಗಾಗಿ ಕೆ.ಐ.ಎ.ಡಿ. ಕಾಯ್ದೆಯಡಿ ಅಧಿಸೂಚನೆ.
378	3.6.2009	ಸಂ. ಸಿಐ 179 ಎಸ್‌ಪಿಕ್ಯೂ 2009, ದಿ. 2.6.2009 – ಬೆಂಗಳೂರು ಮೆಟ್ರೋ ಯೋಜನೆಗಾಗಿ ಕೆ.ಐ.ಎ.ಡಿ. ಕಾಯ್ದೆಯಡಿ ಅಧಿಸೂಚನೆ.
379	3.6.2009	No. LGA/21/LOLA/2009, Dt. 1.6.2009 – ವಿರೋಧ ಪಕ್ಷದ ನಾಯಕರ ಅವಧಿಯ ಮುಕ್ತಾಯದ ಬಗ್ಗೆ.
380	3.6.2009	No. FD 05 CET 2009, Dt. 3.6.2009 – Under Section 11-A of the Karnataka Tax on Entry of Goods Act, 1979.

ವಾರದ ರಾಜ್ಯಪತ್ರವನ್ನು ಅಂತರಜಾಲದಲ್ಲಿ ವೀಕ್ಷಿಸಬಹುದು

http//www.Kar.nic.in/gazette.

ಕರ್ನಾಟಕ ರಾಜ್ಯಪತ್ರವನ್ನು ಅಂತರಜಾಲದಲ್ಲಿ ವೀಕ್ಷಿಸಬಹುದು
http//www.Kar.nic.in/gazette.

೨೦೦೯-೨೦೧೦ನೇ ಇಸವಿಯ ಕರ್ನಾಟಕ ರಾಜ್ಯಪತ್ರದ ಪರಿಷ್ಕೃತ ಚಂದಾ ದರ

ಕ್ರಮ ಸಂಖ್ಯೆ	ರಾಜ್ಯಪತ್ರದ ಭಾಗಗಳು	ಪ್ರತಿ ಒಂದಕ್ಕೆ ರೂ. ಪೈ.	ವಾರ್ಷಿಕ ಚಂದಾ ದರ ರೂ. ಪೈ.
1.	ಭಾಗ - 1	12-00	700-00
2.	ಭಾಗ - 2	4-00	208-00
3.	ಭಾಗ - 3	30-00	1075-00
4.	ಭಾಗ - 4	3-00	240-00
5.	ಭಾಗ - 4ಎ	8-00	285-00
6.	ಭಾಗ - 5	13-00	528-00
7.	ಭಾಗ - 6 (ಬೆಂಗಳೂರು)................................	7-00	325-00
8.	ಭಾಗ - 6ಎ (ಮೈಸೂರು)................................	50-00	1111-00
9.	ಭಾಗ - 6ಬಿ (ಧಾರವಾಡ)................................	25-00	1637-00
10.	ಭಾಗ - 6ಸಿ (ಗುಲ್ಬರ್ಗ)................................	29-00	1469-00
11.	ಸಂಪೂರ್ಣ ಕರ್ನಾಟಕ ರಾಜ್ಯಪತ್ರ ಕ್ರ. ಸ. 1 ರಿಂದ 7 (ಭಾಗ-1 ರಿಂದ 6) ವಿಶೇಷ ರಾಜ್ಯಪತ್ರವನ್ನು ಹೊರತುಪಡಿಸಿ	77-00	3360-00
12.	ವಿಶೇಷ ರಾಜ್ಯಪತ್ರಗಳನ್ನು ಸಂಬಂಧಪಟ್ಟ ಇಲಾಖೆಗಳಿಂದ ಪಡೆಯಿರಿ ಮತ್ತು ಸರ್ಕಾರಿ ಪುಸ್ತಕ ಮಳಿಗೆಗಳಲ್ಲಿ ಮಾರಾಟಕ್ಕೆ ಲಭ್ಯವಿರುತ್ತವೆ.		

೨೦೦೯-೨೦೧೦ನೇ ಇಸವಿಯ ಕರ್ನಾಟಕ ರಾಜ್ಯಪತ್ರದ ಪ್ರಕಟಣೆ ದರ

ಕ್ರಮ ಸಂಖ್ಯೆ	ಪ್ರಕಟಣೆ ದರಗಳು		ಮೊತ್ತ ರೂ. ಪೈ.
1.	ಸ್ಥಳೀಯ / ಸ್ಥಾನಿಕ ಸಂಸ್ಥೆ ಮತ್ತು ಸರ್ಕಾರದ ಇಲಾಖೆ ಎ4 ಅಳತೆಯ ಪ್ರತಿ ಪುಟಕ್ಕೆ	...	500-00
2.	ಪ್ರತಿ ಸಾಲಿನ 43 ಎಮ್ಸ್ ಅಥವಾ 2 ಸಾಲಿನ 21 ಎಮ್ಸ್	...	7-00
3.	ಖಾಸಗಿ ಸಂಸ್ಥೆ ಮತ್ತು ವಾಣಿಜ್ಯಕ್ಕೆ ಸಂಬಂಧಿಸಿದಂತೆ (ಕೆಪಿಟಿಸಿಎಲ್, ಕೆಎಸ್‌ಆರ್‌ಟಿಸಿ ತರಹ ಇತ್ಯಾದಿ ಪ್ರತಿ ಪುಟಕ್ಕೆ)	...	750-00
4.	ಪ್ರತಿ ಸಾಲಿನ 43 ಎಮ್ಸ್ ಅಥವಾ 2 ಸಾಲಿನ 21 ಎಮ್ಸ್	...	11-00
5.	ಅರ್ಧ ಪುಟಕ್ಕೆ ಅಥವಾ ಕಾಲು ಪುಟಕ್ಕೆ ಬರುವ ವಿಷಯ	...	½ ಅಥವಾ ¼ ಪುಟಕ್ಕೆ ದರ ನಿಗಧಿ ಕ್ರಮ ಸಂಖ್ಯೆ 1 ಮತ್ತು 3
6.	ಕಾಲು ಪುಟಕ್ಕಿಂತ ಕಡಿಮೆ ಇರುವ ವಿಷಯಕ್ಕೆ	...	ಕ್ರಮ ಸಂಖ್ಯೆ 2 ಮತ್ತು 4 ರಲ್ಲಿ ನಮೂದಿಸಿರುವಂತೆ ಪ್ರತಿ ಸಾಲಿಗೆ ದರ ನಿಗಧಿಪಡಿಸಿರುವುದು.
7.	ಹೆಚ್ಚಾಗಿ ಬೇಕಾಗಿರುವ ಪ್ರತಿ ಹಾಳೆಯ ಬೆಲೆ (ಮುದ್ರಿಸಿರುವ ಹಾಳೆಯ ಅಳತೆಯನ್ನು ನಿರೂಪಿಸಿ)	...	1-00

ಸೂಚನೆ :- 1. ಚಂದಾಹಣದ / ಪ್ರಕಟಣಾ ವೆಚ್ಚದ ಮೊತ್ತವನ್ನು “0058 ಲೇಖನ ಸಾಮಗ್ರಿ ಮತ್ತು ಮುದ್ರಣ (1) ರಾಜ್ಯಪತ್ರ ಮತ್ತು ಇತರ ಪ್ರಕಟಣಾ ವೆಚ್ಚಗಳು” ಖಜಾನೆಗೆ ಸಲ್ಲಿಸಿ, ಮೂಲ ಚಲನನ್ನು ಮುಂದಿನ ಕ್ರಮಕ್ಕಾಗಿ ಈ ಕಛೇರಿಗೆ ಕಳುಹಿಸಬೇಕು.

2. ಭಾಗ VI-ಎ, VI-ಬಿ, VI-ಸಿ ಗಳನ್ನು ಅನುಕ್ರಮವಾಗಿ ಮೈಸೂರು, ಧಾರವಾಡ ಮತ್ತು ಗುಲ್ಬರ್ಗಾದ ಶಾಖಾ ಮುದ್ರಣಾಲಯಗಳಿಂದ ಪಡೆಯಬಹುದು.

3. ಕರ್ನಾಟಕ ರಾಜ್ಯ ಪತ್ರಕ್ಕಾಗಿ ಈ ಕೆಳಕಂಡ ವಿಳಾಸದಲ್ಲಿ ಪತ್ರ ವ್ಯವಹರಿಸತಕ್ಕದ್ದು.

ಸಂಕಲನಾಧಿಕಾರಿಗಳು,
ಕರ್ನಾಟಕ ರಾಜ್ಯಪತ್ರ,
ಸರ್ಕಾರಿ ಹೊರವಲಯ ಮುದ್ರಣಾಲಯ,
ಮೈಸೂರು ರಸ್ತೆ, ಬೆಂಗಳೂರು-59.

ಮುದ್ರಕರು :- ನಿರ್ದೇಶಕರು, ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು-59

KA / BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೪	ಬೆಂಗಳೂರು, ಗುರುವಾರ, ಜೂನ್ ೧೧, ೨೦೦೯ (ಜೇಷ್ಠ ೨೧, ಶಕ ವರ್ಷ ೧೯೩೧)	ಸಂಚಿಕೆ ೨೪

ಭಾಗ – ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ವಿಷಯ: ಶ್ರೀ ಎಸ್. ಸಿದ್ದಲಿಂಗಮೂರ್ತಿ, ಪತ್ರಾಂಕಿತ ವ್ಯವಸ್ಥಾಪಕ ಇವರಿಗೆ ಆಡಳಿತ ಸಹಾಯಕ ಹುದ್ದೆಗೆ ನೀಡಿರುವ ಬಡ್ತಿಯನ್ನು ಮುಂದೂಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಅಧಿಸೂಚನೆ ಸಂ: ಅಪಜೀ 72 ಹುಸ್ಯಮು 2006, ದಿನಾಂಕ 28–8–2007.
2. ಸರ್ಕಾರದ ಆದೇಶ ಸಂ: ಅಪಜೀ 72 ಹುಸ್ಯಮು 2006, ದಿನಾಂಕ 5–10–2007.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು, ಇವರ ಪತ್ರ ಸಂಖ್ಯೆ: ಎ1/ಇಎಸ್‌ಟಿ/ಸಿಆರ್–91/2007–08, ದಿನಾಂಕ 11–8–2008.

ಪ್ರಸ್ತಾವನೆ:

ಶ್ರೀ ಎಸ್. ಸಿದ್ದಲಿಂಗಮೂರ್ತಿ, ಪತ್ರಾಂಕಿತ ವ್ಯವಸ್ಥಾಪಕರು ಇವರಿಗೆ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಅಧಿಸೂಚನೆ ದಿನಾಂಕ 28–8–2007ರ ಪ್ರಕಾರ ಪತ್ರಾಂಕಿತ ವ್ಯವಸ್ಥಾಪಕ ವೃಂದದಿಂದ ಆಡಳಿತ ಸಹಾಯಕ ವೃಂದಕ್ಕೆ ಬಡ್ತಿ ನೀಡಿರುವುದನ್ನು ಶ್ರೀ ಎಸ್. ಸಿದ್ದಲಿಂಗಮೂರ್ತಿ, ಪತ್ರಾಂಕಿತ ವ್ಯವಸ್ಥಾಪಕರು ಇವರು ಕೋರಿಕೆಯ ಮೇರೆಗೆ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 5–10–2007ರ ಆದೇಶದಲ್ಲಿ ಒಂದು ವರ್ಷ ಕಾಲ ಮುಂದೂಡಿ, ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಯಲ್ಲಿಯೇ ಮುಂದುವರಿಸಲಾಗಿತ್ತು.

ಶ್ರೀ ಎಸ್. ಸಿದ್ದಲಿಂಗಮೂರ್ತಿ, ಪತ್ರಾಂಕಿತ ವ್ಯವಸ್ಥಾಪಕರು ಇವರು ದಿನಾಂಕ 19–7–2008ರ ಮನವಿಯಲ್ಲಿ ಅವರ ಕೌಟುಂಬಿಕ ತೊಂದರೆಗಳ ಕಾರಣಗಳಿಂದ ಸದರಿಯವರಿಗೆ ನೀಡಿರುವ ಮುಂಬಡ್ತಿಯನ್ನು ತಾತ್ಕಾಲಿಕವಾಗಿ ಮುಂದೂಡುವಂತೆ ಕೋರಿರುವುದನ್ನು ಪರಿಶೀಲಿಸಿ, ಸೂಕ್ತ ನಿರ್ಣಯ ತೆಗೆದುಕೊಳ್ಳಲು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರು ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರ ಪ್ರಸ್ತಾವನೆ ಮತ್ತು ಶ್ರೀ ಎಸ್. ಸಿದ್ದಲಿಂಗಮೂರ್ತಿ, ಪತ್ರಾಂಕಿತ ವ್ಯವಸ್ಥಾಪಕರು ಇವರ ಮನವಿಯನ್ನು ಪರಿಗಣಿಸಿ ಈ ಮುಂದಿನಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಅಪಜೀ 23 ಹುಸ್ಯಮು 2008, ಬೆಂಗಳೂರು, ದಿನಾಂಕ 15ನೇ ಡಿಸೆಂಬರ್ 2008.

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ, ಶ್ರೀ ಎಸ್. ಸಿದ್ದಲಿಂಗಮೂರ್ತಿ, ಪತ್ರಾಂಕಿತ ವ್ಯವಸ್ಥಾಪಕರು ಇವರಿಗೆ ಅಧಿಸೂಚನೆ ದಿನಾಂಕ 28–8–2007ರ ಪ್ರಕಾರ ಪತ್ರಾಂಕಿತ ವ್ಯವಸ್ಥಾಪಕರ ವೃಂದದಿಂದ ಆಡಳಿತ ಸಹಾಯಕ ವೃಂದಕ್ಕೆ ಬಡ್ತಿ

I -F1-B/B

ನೀಡಿ, ಸರ್ಕಾರದ ಆದೇಶ ದಿನಾಂಕ 5-10-2007ರಲ್ಲಿ ಮುಂದೂಡಿರುವುದನ್ನು ಇನ್ನೊಂದು ವರ್ಷ ಕಾಲ ಮುಂದೂಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.23

ಗೋಪಾಲ್

ಸರ್ಕಾರದ ಅಧೀನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ

ವಿಷಯ: ಪರಿಹಾರಾತ್ಮಕ ನೆಡುತೋಪುಗಳ ದರ ಪರಿಷ್ಕರಣೆ ಕುರಿತು.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಅಪಜೀ 44 ಎಫ್‌ಎಪಿ 96, ದಿನಾಂಕ 3-2-1997.
2. ಸರ್ಕಾರಿ ಆದೇಶ ಸಂಖ್ಯೆ: ಅಪಜೀ 156 ಎಫ್‌ಎಪಿ 2002, ದಿನಾಂಕ 28-11-2002.
3. ಸರ್ಕಾರಿ ಆದೇಶ ಸಂಖ್ಯೆ: ಅಪಜೀ 102 ಎಫ್‌ಎಪಿ 2008, ದಿನಾಂಕ 15-10-2008.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಎ5(6) ಜಿಎಫ್‌ಎಲ್/ಸಿಆರ್/178/95-96, ದಿನಾಂಕ 1-10-2008.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ 3-2-1997ರ ಆದೇಶದಲ್ಲಿ ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶಗಳಿಗೆ ಬಿಡುಗಡೆ ಮಾಡುವ ಸಂದರ್ಭದಲ್ಲಿ ಪರಿಹಾರಾತ್ಮಕ ನೆಡುತೋಪು ಬೆಳೆಸುವ ಸಲುವಾಗಿ ತಗಲುವ ವೆಚ್ಚ ಪ್ರತಿ ಹೆಕ್ಟೇರ್‌ಗೆ ರೂ. 30,000-00ಗಳನ್ನು ನಿಗಧಿಪಡಿಸಿ, ದಿನಾಂಕ 1-4-1996 ರಿಂದ ಜಾರಿಯಲ್ಲಿರುತ್ತದೆಂದು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ 28-11-2002ರ ಆದೇಶದಲ್ಲಿ ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶಗಳಿಗೆ ಬಿಡುಗಡೆ ಮಾಡುವ ಸಂದರ್ಭದಲ್ಲಿ ಪರಿಹಾರಾತ್ಮಕ ನೆಡುತೋಪು ಬೆಳೆಸುವ ಸಲುವಾಗಿ ತಗಲುವ ವೆಚ್ಚ ಪ್ರತಿ ಹೆಕ್ಟೇರ್‌ಗೆ ರೂ. 54,200-00ಗಳನ್ನು ನಿಗಧಿಪಡಿಸಿ, ದಿನಾಂಕ 1-4-2001 ರಿಂದ ಜಾರಿಯಲ್ಲಿರುತ್ತದೆಂದು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ದಿನಾಂಕ 15-10-2008ರ ಆದೇಶದಲ್ಲಿ ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶಗಳಿಗೆ ಬಿಡುಗಡೆ ಮಾಡುವ ಸಂದರ್ಭದಲ್ಲಿ ಪರಿಹಾರಾತ್ಮಕ ನೆಡುತೋಪು ಬೆಳೆಸುವ ಸಲುವಾಗಿ ತಗಲುವ ವೆಚ್ಚ ಪ್ರತಿ ಹೆಕ್ಟೇರ್‌ಗೆ ರೂ. 54,200-00 ಗಳಿಂದ ರೂ. 84,000/-ಗಳಿಗೆ ಹೆಚ್ಚಿಸಿ ಉಪಯೋಗಿತ ಸಂಸ್ಥೆಗಳಿಂದ ವಸೂಲು ಮಾಡಲು ಹಾಗೂ ದಿನಾಂಕ 1-10-2008 ರಿಂದ ಜಾರಿಯಲ್ಲಿರುತ್ತದೆಂದು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ದಿನಾಂಕ 1-10-2008ರ ಪತ್ರದಲ್ಲಿ ಪರಿಹಾರಾತ್ಮಕ ನೆಡುತೋಪುಗಳ ದರಪರಿಷ್ಕರಣೆ ಪ್ರಸ್ತಾವನೆಯು 2008-09ನೇ ಸಾಲಿನಿಂದ ಸಾಮಾನ್ಯವಾಗಿ ಮಂಜೂರಾದ ಅನುಸೂಚಿತ ದರಗಳನ್ವಯ ದಿನಾಂಕ 2-6-2008ರಂದು ಪ್ರಸ್ತಾವನೆ ಸಲ್ಲಿಸಲಾಗಿದೆ. ಅದರನ್ವಯ ನೆಡುತೋಪಿನ ದರವನ್ನು ದಿನಾಂಕ 1-4-2008 ರಿಂದ ಪೂರ್ವಾನ್ವಯವಾಗಿ ನಿಗದಿಪಡಿಸುವಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶಗಳಿಗೆ ಬಿಡುಗಡೆ ಮಾಡುವ ಸಂದರ್ಭದಲ್ಲಿ ಪರಿಹಾರಾತ್ಮಕ ನೆಡುತೋಪು ಬೆಳೆಸುವ ಸಲುವಾಗಿ ದಿನಾಂಕ 1-10-2008 ರಿಂದ ಜಾರಿಗೆ ಬರುವಂತೆ, ಪ್ರತಿ ಹೆಕ್ಟೇರ್‌ಗೆ ರೂ. 54,200-00 ಗಳಿಂದ ರೂ. 84,000-00 ಗಳಿಗೆ ಸರ್ಕಾರಿ ಆದೇಶ ದಿನಾಂಕ 15-10-2008 ಹೆಚ್ಚಿಸಿರುವುದನ್ನು ಮಾರ್ಪಡಿಸಿ, ದಿನಾಂಕ 1-4-2008 ರಿಂದ ಪೂರ್ವಾನ್ವಯವಾಗಿ ಸರ್ಕಾರವು ನಿರ್ಧರಿಸಿರುವ ಕಾರಣ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಅಪಜೀ 102 ಎಫ್‌ಎಪಿ 2008, ಬೆಂಗಳೂರು, ದಿನಾಂಕ 11ನೇ ಡಿಸೆಂಬರ್ 2008.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶಗಳಿಗೆ ಬಿಡುಗಡೆ ಮಾಡುವ ಸಂದರ್ಭದಲ್ಲಿ ಪರಿಹಾರಾತ್ಮಕ ನೆಡುತೋಪು ಬೆಳೆಸುವ ಸಲುವಾಗಿ ತಗಲುವ ವೆಚ್ಚ ಪ್ರತಿ ಹೆಕ್ಟೇರ್‌ಗೆ ದಿನಾಂಕ 1-10-2008 ರಿಂದ ಜಾರಿಗೆ ಬರುವಂತೆ ರೂ. 54,200-00 ಗಳಿಂದ ರೂ. 84,000-00ಗಳಿಗೆ ಹೆಚ್ಚಿಸಿರುವುದನ್ನು ಮಾರ್ಪಡಿಸಿ, ದಿನಾಂಕ 1-4-2008 ರಿಂದ ಪೂರ್ವಾನ್ವಯವಾಗಿ ರೂ. 84,000-00 ಗಳಂತೆ ಉಪಯೋಗಿತ ಸಂಸ್ಥೆಗಳಿಂದ ವಸೂಲಿ ಮಾಡಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.21

ಹೆಚ್.ಎಂ. ಮಲ್ಲಿಕಾರ್ಜುನಸ್ವಾಮಿ

ಸರ್ಕಾರದ ಅಧೀನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ

COMMERCE AND INDUSTRIES SECRETARIAT

Subject: Proposal of M/s Shipco Infrastructure Pvt. Ltd., (SIPL) to include Pakarahalli Village, Bangarapet Taluk, Kolar District in the proposed "Logistic Inter Model Free Zone SEZ" – Approval for – Orders reg.

Read:
1. Proceedings of the 7th State High Level Clearance Committee (SHLCC) meeting held on 28-8-2006.
2. G.O. No. CI 94 SPI 2007, dated 11-7-2007.
3. Proceedings of the 16th State High Level Clearance Committee (SHLCC) meeting held on 19-11-2008.

Preamble:

The project proposal of M/s Shipco Infrastructure Pvt. Ltd., (SIPL) to establish a "Logistic Inter Model Free Zone SEZ" with an investment of Rs. 706.00 crores in 300 acres of land in the villages of Hudkala, Krishnapura, Vaggayanedenne and Aniganahalli, Bangarapete Taluk, Kolar District through KIADB acquisition process was approved in the 7th State High Level Clearance Committee meeting held on 28-8-2006. Accordingly, Government Order read above (2) was issued.

M/s SIPL has acquired 106 acres out of 300 acres. In view of some land owners are not interested in selling their land, who have agreed earlier. Company has requested for inclusion of Sy. Nos. 24/1, 20/P4, 18/2, 21, 32, 20, 20/P6, 22 55/P6 and 20/P of Pakarahalli village, Bangarapet taluk, Kolar district in the proposed "Logistic Inter Model Free Zone SEZ" totaling 14 acres. The requirement of land for the 1st phase will be 120 acres. The company propose to acquire balance 200 acres at a later stage for the 2nd phase from the villages of Hudkala, Krishnapura, Vaggayanedenne, Aniganahalli and Pakarahalli, Bangarapete Taluk, Kolar District through KIADB acquisition process.

The State High Level Clearance Committee, after detailed discussion of the proposal of the said Company, vide the proceedings read above (3) has recommended for approval of the project.

Government has examined the recommendations made by the State High Level Clearance Committee in its 16th Meeting held on 19-11-2008 in all aspects. Hence the following order.

Government Order No. CI 8 SPI 2009, Bangalore Dated 10th February 2009

In the circumstances explained above, Government is pleased to accord approval to M/s Shipco Infrastructure Pvt. Ltd., (SIPL) to include Pakarahalli Village, Bangarapet Taluk, Kolar District in the proposed "Logistic Inter Model Free Zone SEZ".

KIADB to acquire 14 acres of land on consent at Sy. Nos. 24/1, 20/P4, 18/2, 21, 32, 20, 20/P6, 22, 55/P6 and 20/P of Pakarahalli Village, Bangarapet taluk, Kolar District. The unit shall submit consent letters from the land owners of 14 acres to KIADB before KIADB initiates acquisition.

For infrastructure, incentives and concessions and conditions, G.O. dated 11-7-2007 read above (2) holds good.

This approval is valid for a period of two years from the date of issue.

By order and in the name of the Governor of Karnataka,

P.R.680

APARNA PAVATE

Desk Officer (Technical Cell), Commerce & Industries Department

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ವಿಷಯ: 2008-09ನೇ ಸಾಲಿನಿಂದ "ಸಮೃದ್ಧ ಹಸಿರು ಗ್ರಾಮ ಯೋಜನೆ" ಯನ್ನು ಜಾರಿಗೊಳಿಸಲು ಸಮಿತಿ ರಚನೆ ಕುರಿತು.

ಓದಲಾಗಿದೆ: ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರ ಪತ್ರ ಸಂಖ್ಯೆ: ಮುಅಸಂ(ಯೋ)/ಬಿಯುಡಿ/ಸಿಆರ್-45, 08-09, ದಿನಾಂಕ 25-8-2008 ಮತ್ತು 29-8-2008.

ಪ್ರಸ್ತಾವನೆ:

2008-09ನೇ ಆಯವ್ಯಯದಲ್ಲಿ ಪರಿಸರ ಸಮತೋಲನ ಕಾಪಾಡಲು ಅರಣ್ಯೀಕರಣ ಕಾರ್ಯಗತಗೊಳಿಸುವ ಬಗ್ಗೆ ನೈಸರ್ಗಿಕ ಸಂಪನ್ಮೂಲಗಳ ಲಭ್ಯತೆಯಲ್ಲಿ ಸ್ವಾವಲಂಬನೆ ಮತ್ತು ವೃಕ್ಷಹೊದಿಕೆಯನ್ನು ವೃದ್ಧಿಗೊಳಿಸುವ ದಿಸೆಯಲ್ಲಿ "ಸಮೃದ್ಧ ಹಸಿರು ಗ್ರಾಮ ಯೋಜನೆ" ಎಂಬ ವಿನೂತನ ಕಾರ್ಯಕ್ರಮವನ್ನು ಘೋಷಿಸಿದ್ದು, ಯೋಜನೆಯಲ್ಲಿ ಆಸಕ್ತಿಹೊಂದಿರುವ ಗ್ರಾಮ ಅರಣ್ಯ ಸಮಿತಿಗಳಲ್ಲಿ ಪ್ರತಿ ಜಿಲ್ಲೆಗೆ ಒಂದು ಗ್ರಾಮ ಅರಣ್ಯ ಸಮಿತಿಯನ್ನು ಆಯ್ಕೆ ಮಾಡಿ ಈ ಸಮಿತಿಯ ವ್ಯಾಪ್ತಿಯಲ್ಲಿ ಬರುವ ಗ್ರಾಮ/ಗ್ರಾಮಗಳನ್ನು ಈ ಕಾರ್ಯಕ್ರಮದಡಿಯಲ್ಲಿ ತಂದು ಎಲ್ಲಾ ಇಲಾಖೆಗಳ ಸಹಕಾರ ಮತ್ತು ಅನುದಾನದ ಮೂಲಕ "ಸಮೃದ್ಧ ಹಸಿರು ಗ್ರಾಮ ಯೋಜನೆ" ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಬೇಕಾಗಿದೆ.

ಮೇಲೆ ಓದಲಾದ ದಿನಾಂಕ 25-8-2008 ಮತ್ತು 29-8-2008ರ ಪತ್ರಗಳಲ್ಲಿ "ಸಮೃದ್ಧ ಹಸಿರು ಗ್ರಾಮ ಯೋಜನೆ" ಯನ್ನು ಜಿಲ್ಲಾಮಟ್ಟದಲ್ಲಿರುವ ವಿವಿಧ ಇಲಾಖೆಗಳು ಮತ್ತು ಯೋಜನೆಗಳ ಸಂಯೋಜನೆ ಮತ್ತು ಸಾಮೂಹಿಕ ಭಾಗವಹಿಸುವಿಕೆಯ ಮೂಲಕ ಆದ್ಯತಾ ಕಾರ್ಯಕ್ರಮವಾಗಿ ಅನುಷ್ಠಾನಗೊಳಿಸಬೇಕಾಗಿರುವುದರಿಂದ ವಿವಿಧ ಇಲಾಖೆಗಳ ಸಮನ್ವಯತೆಯನ್ನು ಸಾಧಿಸಿ ಎಲ್ಲಾ ಇಲಾಖೆಗಳ ಅನುದಾನ ಮತ್ತು ಸಹಕಾರವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮನ್ವಯ ಸಮಿತಿಯನ್ನು ರಚಿಸಲು ಅನುಮೋದನೆ ನೀಡಬೇಕೆಂದು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, "ಸಮೃದ್ಧ ಹಸಿರು ಗ್ರಾಮ ಯೋಜನೆ"ಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮತ್ತು ಆಯಾ ಜಿಲ್ಲೆಗಳ ವಿಧಾನಸಭೆ ಮತ್ತು ವಿಧಾನಪರಿಷತ್ತಿನ ಸದಸ್ಯರುಗಳನ್ನೊಳಗೊಂಡಂತೆ ಸಮಿತಿಯನ್ನು ರಚಿಸಲು ಸರ್ಕಾರವು ನಿರ್ಧರಿಸಿರುವ ಕಾರಣ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಅಪಜೀ 135 ಎಫ್‌ಎಪಿ 2008, ಬೆಂಗಳೂರು, ದಿನಾಂಕ 4ನೇ ಡಿಸೆಂಬರ್ 2008.

ಅರಣ್ಯ ಮತ್ತು ಇತರೆ ಇಲಾಖೆಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳು ಸೇರಿದಂತೆ, ಜಿಲ್ಲಾ ಮಟ್ಟದಲ್ಲಿರುವ ವಿವಿಧ ಇಲಾಖೆಗಳು ಮತ್ತು ಯೋಜನೆಗಳ ಸಂಯೋಜನೆ ಮತ್ತು ವಿವಿಧ ಇಲಾಖೆಗಳು ಸಾಮೂಹಿಕವಾಗಿ ಭಾಗವಹಿಸುವ ಮೂಲಕ ಮತ್ತು ಪರಿಸರ ಸಮತೋಲನ ಕಾಪಾಡಲು ಅರಣ್ಯೀಕರಣ ಕಾರ್ಯಗತಗೊಳಿಸುವ ಬಗ್ಗೆ ನೈಸರ್ಗಿಕ ಸಂಪನ್ಮೂಲಗಳ ಲಭ್ಯತೆಯಲ್ಲಿ ಸ್ವಾವಲಂಬನೆ ಮತ್ತು ವೃಕ್ಷಹೊದಿಕೆಯನ್ನು ವೃದ್ಧಿಗೊಳಿಸುವ ದಿಸೆಯಲ್ಲಿ "ಸಮೃದ್ಧ ಹಸಿರು ಗ್ರಾಮ ಯೋಜನೆ" ಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಮತ್ತು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸಮಿತಿಯನ್ನು ಸರ್ಕಾರವು ರಚಿಸಿದೆ:

1	ಜಿಲ್ಲಾಧಿಕಾರಿಗಳು	ಅಧ್ಯಕ್ಷರು
2	ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾಪಂಚಾಯಿತಿ	ಸದಸ್ಯರು
3	ಜಂಟಿ ನಿರ್ದೇಶಕರು, ಕೃಷಿ ಇಲಾಖೆ	ಸದಸ್ಯರು
4	ಜಿಲ್ಲಾ ಜಲಾನಯನಾಭಿವೃದ್ಧಿ ಅಧಿಕಾರಿ	ಸದಸ್ಯರು
5	ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ	ಸದಸ್ಯರು
6	ಉಪ ನಿರ್ದೇಶಕರು, ರೇಷ್ಮೆ ಇಲಾಖೆ	ಸದಸ್ಯರು
7	ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣಾಭಿವೃದ್ಧಿ ಅಧಿಕಾರಿ	ಸದಸ್ಯರು
8	ಉಪ ನಿರ್ದೇಶಕರು, ಪಶುಸಂಗೋಪನಾ ಇಲಾಖೆ	ಸದಸ್ಯರು
9	ಉಪ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ	ಸದಸ್ಯರು
10	ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ	ಸದಸ್ಯರು
11	ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ	ಸದಸ್ಯರು
12	ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ	ಸದಸ್ಯರು
13	ಅಧೀಕ್ಷಕ ಅಭಿಯಂತರರು, ಲೋಕೋಪಯೋಗಿ ಇಲಾಖೆ	ಸದಸ್ಯರು
14	ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಮಾಜಿಕ ಅರಣ್ಯ ವಿಭಾಗ	ಸದಸ್ಯರು
15	ಸಂಬಂಧಿಸಿದ ತಹಶೀಲ್ದಾರರು	ಸದಸ್ಯರು
16	ಸಂಬಂಧಿಸಿದ ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ	ಸದಸ್ಯರು
17	ಸಂಬಂಧಪಟ್ಟ ಜಿಲ್ಲೆಗಳ ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನ ಸದಸ್ಯರು	ಸದಸ್ಯರು
18	ಉಪ ಅರಣ್ಯ ಸಂರಕ್ಷಣಾಧಿಕಾರಿ (ಪ್ರಾದೇಶಿಕ ಹಾಗೂ ಜಿಲ್ಲಾ ಕೇಂದ್ರ ಸ್ಥಾನ)	ಸದಸ್ಯ ಕಾರ್ಯದರ್ಶಿ

ಚುನಾಯಿತ ಪ್ರತಿನಿಧಿಗಳು

1	ಯೋಜನಾ ವ್ಯಾಪ್ತಿಯ ಗ್ರಾಮ ಅರಣ್ಯ ಸಮಿತಿ ಅಧ್ಯಕ್ಷರು	ಸದಸ್ಯರು
2	ಯೋಜನಾ ವ್ಯಾಪ್ತಿಯ ಜಿಲ್ಲಾ ಪಂಚಾಯಿತಿ ಸದಸ್ಯ	ಸದಸ್ಯರು
3	ಯೋಜನಾ ವ್ಯಾಪ್ತಿಯ ತಾಲ್ಲೂಕು ಪಂಚಾಯಿತಿ ಸದಸ್ಯ	ಸದಸ್ಯರು
4	ಯೋಜನಾ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಅಧ್ಯಕ್ಷರು	ಸದಸ್ಯರು
5	ಯೋಜನಾ ವ್ಯಾಪ್ತಿಯ ಸರ್ಕಾರೇತರ ಸಂಸ್ಥೆ ಪ್ರತಿನಿಧಿ*	ಸದಸ್ಯರು

* (ಜಂಟಿ ಅರಣ್ಯ ಯೋಜನೆ ಮತ್ತು ನಿರ್ವಹಣೆ ಸರ್ಕಾರಿ ಆದೇಶ ದಿನಾಂಕ 19-6-2002ರಂತೆ – ಗ್ರಾಮ ಅರಣ್ಯ ಸಮಿತಿಯ ಶಿಫಾರಸ್ಸಿನ ಮೇರೆಗೆ ಉಪ ಅರಣ್ಯ ಸಂರಕ್ಷಣಾಧಿಕಾರಿಯವರಿಂದ ನಾಮನಿರ್ದೇಶಿತನಾದ)

ಈ ಸಮಿತಿಯು ಪ್ರತಿ ತಿಂಗಳು ಸಭೆ ನಡೆಸತಕ್ಕದ್ದು. ಯೋಜನೆಯ ಎಲ್ಲಾ ಪ್ರಸ್ತಾವನೆಗಳ ಕುರಿತು ಪರಿಶೀಲಿಸಿ ಸಮಿತಿಯ ಸದಸ್ಯರುಗಳ ಅಭಿಪ್ರಾಯ / ಸಲಹೆಗಳನ್ನು ಪಡೆದು ಅನುಮೋದನೆ ನೀಡಲ್ಪಟ್ಟ ಯೋಜನಾ ಕಾರ್ಯಕ್ರಮಗಳನ್ನು ಸಕಾಲದಲ್ಲಿ ಅನುಷ್ಠಾನಗೊಳಿಸತಕ್ಕದ್ದು.

ಎಲ್ಲಾ ಜಿಲ್ಲಾಧಿಕಾರಿಗಳು, ವಿವಿಧ ಇಲಾಖೆಗಳೊಡನೆ ಸಮನ್ವಯತೆಯನ್ನು ಕಾಪಾಡುವುದರ ಜೊತೆಗೆ ಎಲ್ಲಾ ಇಲಾಖೆಗಳಲ್ಲಿ ಅನುಷ್ಠಾನದಲ್ಲಿರುವ ಯೋಜನೆಗಳ ಅನುದಾನವನ್ನು ಈ ಯೋಜನೆಯಡಿ ಬಳಸಿಕೊಳ್ಳುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.20

ಹೆಚ್.ಎಂ. ಮಲ್ಲಿಕಾರ್ಜುನಸ್ವಾಮಿ

ಸರ್ಕಾರದ ಅಧೀನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ

FOREST, ECOLOGY AND ENVIRONMENT SECRETARIAT

Sub: Repairs and routine maintenance of SH-17D-Mysore Mananthwadi road passing through the Rajeev Gandhi Park (Nagarhole), Karnataka Constitution of a Committee – reg.

Read:
1. Letter No. D/WL/CR-05/2001-02, dt: 26-10-2007 of the Principal Chief Conservator of Forests (Wildlife), Karnataka, Bangalore.
2. Letter No. F.No.6-43/2007 WL-1, dt: 4-10-2007 of the Government of India, Ministry of Environment and Forest.
3. Letter No. FEE 04 FWL 2007, dt: 30-10-2007.
4. Letter No. FEE 293 FWL 2007, dt: 14-1-2008.
5. Letters No. PIU/KSHIP/EMS/03/2008-09/1707, dt: 6-12-2008 and 26-11-2008 of the Project Director, Karnataka State Highway Improvement Project, Bangalore.
6. Letters No. D(D1)/WL/CR-5/2001-02, dt: 23-12-2008 and 17-1-2009 of the Principal Chief Conservator of Forests (Wildlife), Karnataka, Bangalore.

Preamble:

In the letter dt: 26-10-2007 read at (1) above, the Principal Chief Conservator of Forests (Wildlife) has requested the Government for permission to accord KSHIP to take up the works of repairs, routine maintenance of SH-17D-Mysore-Mananthwadi road passing through the Rajeev Gandhi National Park (Nagarahole), Karnataka subject to certain conditions.

2. In the letter dt: 4-10-2007 read at (2) above, the Government of India informed to the State Government that the proposal for repairs and routine maintenance of SH-17D-Mysore-Mananthwadi road passing through Rajeev Gandhi National Park was considered in the Standing Committee of the National Board for Wildlife and direct to take up works as per the existing directives of the Hon'ble Supreme Court and the provisions of Forests (Conservation) Act 1980.

3. In the letter dt: 30-10-2007 read at (3) above, the Government of Karnataka has directed the Principal Chief Conservator of Forests (Wildlife) to take necessary action in the matter in accordance with the Government of India letter read at (2) above.

4. In the meanwhile one Sri V.T. Ravindra of Bangalore has filed an application on 28-11-2007 bearing No. 1064 before the Central Empowered Committee against the Union of India and the Chief Secretary to Government of Karnataka to stop the work of repairs and maintenance of SH-17D-Mysore-Mananthwadi road passing through the Rajeev Gandhi National Park.

5. The Government of Karnataka in its letter dt: 14-1-2008 read at (4) above has filed a submission before the CEC praying to dismiss the Application of Sri V.T. Ravindra as the necessary precautions have been taken up and procedures have been followed.

6. In the letters read at (5) above, the Chief Project Officer, Karnataka State Highway Improvement Project has requested the Government to constitute the committee and accord permission, to take up the road repair work inside the Rajeev Gandhi National Park.

7. In the letters Nos. dt: 23-12-2008 and 17-1-2009 read at (6) above the Principal Chief Conservator of Forests (Wildlife) has informed that the Hon'ble Supreme Court of India in its order dt: 19-11-2008 have recommended for considering to take up the repairs and routine maintenance of SH-17D-Mysore-Mananthwadi road passing through the Rajeev Gandhi National Park (Nagarahole), Karnataka subject to fulfillment of the conditions as recommended by the Central Empowered Committee and in this context the CEC among other conditions has directed to constitute monitoring committee comprising of the following members to monitor the repair works till its completion and also the mitigative majors:

Sl. No.	Members	
1	The Principal Secretary to Government, Forest, Ecology and Environment Department, Government of Karnataka, Bangalore	Chairman
2	Representative of the Principal Secretary to Government, Public Works Department, Government of Karnataka, i.e. Superintending Engineer, Public Works Department, Mysore	Member
3	Representative of the Principal Chief Conservator of Forests, i.e. The Chief Conservator of Forests, Project Tiger, Mysore	Member
4	Representative of the Central for Wildlife Studies (NGO), Bangalore	Member
5	Representative of Coorg Wildlife Society (NGO), Madikeri	Member

Hence the following order:

G.O. No. FEE 276 FWL 2008, Bangalore, Dated: 28th January 2009

In the circumstances explained in the preamble, Government is pleased to constitute a monitoring committee comprising of following members to monitor the repairs and routine maintenance of SH-17D-Mysore-Mananthwadi road passing through the Rajeev Gandhi National Park (Nagarahole), Karnataka subject to fulfillment of the conditions as recommended by the Central Empowered Committee:

Sl. No.	Members	
1	The Principal Secretary to Government, Forest, Ecology and Environment Department, Government of Karnataka, Bangalore	Chairman
2	Representative of the Principal Secretary to Government, Public Works Department, Government of Karnataka, i.e. Superintending Engineer, Public Works Department, Mysore	Member
3	Representative of the Principal Chief Conservator of Forests, i.e. The Chief Conservator of Forests, Project Tiger, Mysore	Member

4	Representative of the Central for Wildlife Studies (NGO), Bangalore	Member
5	Representative of Coorg Wildlife Society (NGO), Madikeri	Member

By order and in the name of the Governor of Karnataka,

P.R.503

H.M. MALLIKARJUNASWAMY
Under Secretary to Government,
Forest, Ecology & Environment Department

HEALTH AND FAMILY WELFARE SECRETARIAT

Subject: Deputation of Dr. Murali Krishna P.V. to Karnataka Institute of Diabetology, to "study on effects of walking in prevention and control of diabetics".

Preamble:

Diabetes is a life style disease that has been striking the general public at an alarming rate with devastating effect on the health of the individuals. In this regard Dr. Murali Krishna P.V. intends to conduct a "study on effects of walking in prevention and control of diabetics" at Karnataka Institute of Diabetology, Bangalore.

Dr. Murali Krishna P.V. has submitted a theory with the fact that changes in the walking style has reduced the muscle bulk of the individual putting load on the pancreas in production of insulin. This higher load is the basis for the onset of diabetes mellitus.

To carry out further study, it is considered to depute him to the Karnataka Institute of Diabetology, Bangalore, two days in a week for a period of three years to undertake the study. He shall keep the Government informed on the progress of the study once in a month.

Hence the order.

Government Order No. HFW (PR) 46 WBA 2009, Bangalore, Dated 5th March 2009

Under the circumstances explained in the preamble, Government are pleased to depute Dr. Murali Krishna P.V. Deputy Director (PHCF), KHSDRP, to Karnataka Institute of Diabetology, Bangalore to conduct the "study on effects of walking in prevention and control of diabetics" for two days in a week for a period of three years with immediate effect.

This will not have any financial implications on the Government exchequer.

By order and in the name of the Governor of Karnataka,

P.R.830

SUSHAMA GODBOLE
Deputy Secretary to Government, KHSDRP,
Health & Family Welfare Department

ಸಮಾಜ ಕಲ್ಯಾಣ ಸಚಿವಾಲಯ

ವಿಷಯ: 2007–08ನೇ ಸಾಲಿನ ಆಯವ್ಯಯ ಭಾಷಣದನ್ವಯ ಮಂಜೂರಾದ 52 ಹೊಸ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಮಂಜೂರಾಗಿರುವ ಹುದ್ದೆಗಳಿಗೆ ವೇತನ ಶ್ರೇಣಿ ನಿಗಧಿಪಡಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 50 ಮೊದೇಶಾ 07, ದಿನಾಂಕ 13–6–2007.
2. ಸರ್ಕಾರದ ಆದೇಶ ಸಂಖ್ಯೆ: ಸಕಇ 50 ಮೊದೇಶಾ 07 (ಭಾ), ದಿನಾಂಕ 28–11–2007.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕವಶಿಸಸ/ಸಿಆರ್ (ಶಿಕ್ಷಣ)–21/2007–08/120, ದಿನಾಂಕ 1–1–2008 ಮತ್ತು 20–5–2008.

ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ. (1)ರ ಆದೇಶದಲ್ಲಿ 2007–08ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ಪರಿಶಿಷ್ಟ ಜಾತಿಯ 25, ಪರಿಶಿಷ್ಟ ವರ್ಗದ 5 ಮತ್ತು ಹಿಂದುಳಿದ ವರ್ಗದ 22 ಹೀಗೆ ಒಟ್ಟು 52 ಹೊಸ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಆ ಆದೇಶದಲ್ಲಿ ಕಾಣಿಸಿರುವ ಸ್ಥಳಗಳಲ್ಲಿ ಪ್ರಾರಂಭಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರ.ಸಂ. (2)ರ ಆದೇಶದಲ್ಲಿ ಸದರಿ 52 ವಸತಿ ಶಾಲೆಗಳಿಗೆ 2007–08ನೇ ಸಾಲಿನಿಂದ ವರ್ಷವಾರು 2011–12ನೇ ಸಾಲಿನವರೆಗೆ (5 ವರ್ಷಗಳಿಗೆ) ಅವಶ್ಯವಿರುವ 1300 ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.

ಮೇಲೆ ಓದಲಾದ ಕ್ರ.ಸಂ. (3)ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕಾರ್ಯನಿರ್ವಾಹಕ ನಿರ್ದೇಶಕರು 2007–08ನೇ ಸಾಲಿನಲ್ಲಿ ಪ್ರಾರಂಭಿಸಲಾಗಿರುವ 52 ಹೊಸ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಅವಶ್ಯವಿರುವ 1300 ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ಆದರೆ ಸದರಿ ಆದೇಶದಲ್ಲಿ ಮಂಜೂರಾಗಿರುವ ಹುದ್ದೆಗಳಿಗೆ ವೇತನ ಶ್ರೇಣಿ ನಮೂದಿಸದೇ ಇರುವುದರಿಂದ ಅಪೆಂಡೆಕ್ಸ್ ಬಿ ಯಲ್ಲಿ ಹುದ್ದೆಗಳನ್ನು ಅಳವಡಿಸಿಕೊಳ್ಳಲು ತೊಂದರೆಯಾಗುವುದರಿಂದ ವೇತನ ಶ್ರೇಣಿಗೆ ಹುದ್ದೆಗಳನ್ನು ಮಂಜೂರು ಮಾಡುವ ಬಗ್ಗೆ ಆದೇಶ ಹೊರಡಿಸುವಂತೆ ಪ್ರಸ್ತಾವನೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಸಕಇ 50 ಮೊದೇಶಾ 2007 (ಭಾ), ಬೆಂಗಳೂರು, ದಿನಾಂಕ 3ನೇ ಡಿಸೆಂಬರ್ 2008.

2007–08ನೇ ಸಾಲಿನಲ್ಲಿ ಮಂಜೂರಾಗಿ ಪ್ರಾರಂಭಿಸಲ್ಪಟ್ಟ ಪರಿಶಿಷ್ಟ ಜಾತಿಯ 25, ಪರಿಶಿಷ್ಟ ವರ್ಗದ ೫ ಮತ್ತು ಹಿಂದುಳಿದ ವರ್ಗದ 22 ಹೀಗೆ ಒಟ್ಟು 52 ಹೊಸ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಒಟ್ಟು 1300 ಹುದ್ದೆಗಳನ್ನು ಮಂಜೂರು ಮಾಡಿ ಆದೇಶಿಸಲಾಗಿದ್ದು, ಈ ಕೆಳಕಂಡ ಸದರಿ ಹುದ್ದೆಗಳ ಮುಂದೆ ತೋರಿಸಿರುವ ವೇತನ ಶ್ರೇಣಿಯನ್ನು ತತ್‌ಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ನಿಗಧಿಪಡಿಸಿ ಆದೇಶಿಸಲಾಗಿದೆ:

ಕ್ರಮ ಸಂಖ್ಯೆ	ಹುದ್ದೆಗಳು	ವೇತನ ಶ್ರೇಣಿ	ಒಟ್ಟು ಹುದ್ದೆಗಳು
1	ಪ್ರಾಂಶುಪಾಲರು	11400–21600	52
2	ಭಾಷಾ ಶಿಕ್ಷಕರು		
	ಕನ್ನಡ	8825–16000	52
	ಹಿಂದಿ/ಉರ್ದು	8825–16000	52
	ಆಂಗ್ಲ	8825–16000	52
3	ವಿಷಯ ಶಿಕ್ಷಕರು		
	ಗಣಿತ (ಪಿಸಿಎಂಬಿ)	8825–16000	52
	ವಿಜ್ಞಾನ (ಸಿಬಿಜಡ್)	8825–1000	52
	ಸಮಾಜ ವಿಜ್ಞಾನ (ಆರ್ಟ್ಸ್)	8825–16000	52
4	ದೈಹಿಕ ಶಿಕ್ಷಕರು	8825–16000	52
5	ಗಣಕಯಂತ್ರ ಶಿಕ್ಷಕರು	8825–16000	52
6	ಕ್ರಾಫ್ಟ್ ಶಿಕ್ಷಕರು	8000–14800	52
7	ಸಂಗೀತ ಶಿಕ್ಷಕರು	8000–14800	52
8	ಸ್ಟಾಫ್ ನರ್ಸ್	8000–14800	52
9	ಪ್ರಥಮ ದರ್ಜೆ ಸಹಾಯಕರು (ಗಣಕಯಂತ್ರ ಜ್ಞಾನವುಳ್ಳವರು)	7275–13350	52
10	ನಿಲಯಪಾಲಕರು	7275–13350	52
11	ಅಡುಗೆಯವರು	5200–8200	156
12	ಅಡುಗೆ ಸಹಾಯಕರು	4800–7275	104
13	ಗ್ರೂಪ್–ಡಿ	4800–7275	52
14	ಕಾವಲುಗಾರರು	4800–7275	104
15	ಸ್ವಚ್ಛತಾ ಸಿಬ್ಬಂದಿ	4800–7275	156
		ಒಟ್ಟು	**1300**

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 590 ವೆಚ್ಚ–3/07, ದಿನಾಂಕ 13–11–2007ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎ.ಎಂ. ಚಿದಾನಂದಸ್ವಾಮಿ

ಸರ್ಕಾರದ ಅಧೀನ ಕಾರ್ಯದರ್ಶಿ–1, ಸಮಾಜ ಕಲ್ಯಾಣ ಇಲಾಖೆ

ಪಿ.ಆರ್.81

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ: ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆಯ ಆಡಳಿತ ಮಂಡಳಿ ಪುನರ್ ರಚಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: ಆಕುಕ 79 ಪಿಟಿಡಿ 2004, ದಿನಾಂಕ 10-5-2004 & 7-7-2005.

2. ನಿರ್ದೇಶಕರು, ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಬೆಂಗಳೂರು ಇವರ ಏಕಕಡತ ಟಿಪ್ಪಣಿ ಸಂಖ್ಯೆ: ಇಂಗಾಮಆಸಂ/ಆಆ/2/2008-09, ದಿನಾಂಕ 20-9-2008.

ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ. (1)ರ ಸರ್ಕಾರದ ಆದೇಶದಲ್ಲಿ, ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆಯ ಆಡಳಿತ ಮಂಡಳಿಯನ್ನು ರಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ. (2)ರ ನಿರ್ದೇಶಕರ ಪತ್ರದಲ್ಲಿ, ಸದರಿ ಆಡಳಿತ ಮಂಡಳಿಯ ಅವಧಿಯು 03 ವರ್ಷಗಳದ್ದಾಗಿದ್ದು, ಪುನಃ ಆಡಳಿತ ಮಂಡಳಿಯನ್ನು ಪುನರ್ ರಚಿಸಲು ಕೋರಿರುತ್ತಾರೆ. ಆದ್ದರಿಂದ, ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 332 ಪಿಟಿಡಿ 2008, ಬೆಂಗಳೂರು, ದಿನಾಂಕ 14ನೇ ನವೆಂಬರ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಬೆಂಗಳೂರು ಇದರ ಆಡಳಿತ ಮಂಡಳಿಯನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ 03 ವರ್ಷದ ಅವಧಿಯವರೆಗೆ ಅಥವಾ ಮುಂದಿನ ಆದೇಶದವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಈ ಕೆಳಕಂಡಂತೆ ಪುನರ್ ರಚಿಸಲಾಗಿದೆ.

1)	ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು-560 001	ಅಧ್ಯಕ್ಷರು
2)	ಸರ್ಕಾರದ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, (ವೈದ್ಯಕೀಯ ಶಿಕ್ಷಣ), ವಿಧಾನಸೌಧ, ಬೆಂಗಳೂರು-560 001.	ಉಪಾಧ್ಯಕ್ಷರು
3)	ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-560 001	ಸದಸ್ಯರು
4)	ಸರ್ಕಾರದ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು-560 001	ಸದಸ್ಯರು
5)	ಸರ್ಕಾರದ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001	ಸದಸ್ಯರು
6)	ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-9	ಸದಸ್ಯರು
7)	ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಆನಂದರಾವ್ ವೃತ್ತ, ಬೆಂಗಳೂರು-9	ಸದಸ್ಯರು
8)	ಅಪರ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ	ಸದಸ್ಯರು
	ಅಧಿಕಾರೇತರ ಸದಸ್ಯರು	
1)	ವಿಧಾನಸಭಾ ಸದಸ್ಯರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ, ಬೆಂಗಳೂರು	ಸದಸ್ಯರು
2)	ಶ್ರೀ ಬಿ.ಎಲ್.ಎಸ್. ಮೂರ್ತಿಯವರು, ನಂ. 144, 5ನೇ ಮುಖ್ಯ ರಸ್ತೆ, ಚಾಮರಾಜಪೇಟೆ, ಬೆಂಗಳೂರು-18	ಸದಸ್ಯರು
3)	ಶ್ರೀ ವಿಜಯ್ ಸಿ. ಕಪೂರ್, ಶ್ರೀ ಹರನಾಮ್‌ದಾಸ್ ಕಪೂರ್ ಟ್ರಸ್ಟ್, ರಜಲ್ ಮಾರ್ಕೆಟ್, ಬೆಂಗಳೂರು	ಸದಸ್ಯರು

4)	ಶ್ರೀ ವಿ.ಎಸ್. ಕೃಷ್ಣ ಅಯ್ಯರ್, ಮಾಜಿ ಲೋಕಸಭಾ ಸದಸ್ಯರು, ಸಿ.23, ಶಂಕರ್ ಪಾರ್ಕ್, ಶಂಕರಪುರಂ, ಬೆಂಗಳೂರು-4.	ಸದಸ್ಯರು
5)	ಡಾ: ಡಿ.ಜಿ. ಬೆನಕಪ್ಪ, ಮಕ್ಕಳ ತಜ್ಞರು, 788, 34ನೇ ಎ ಅಡ್ಡರಸ್ತೆ, 4ನೇ ಹಂತ, ಜಯನಗರ, ಬೆಂಗಳೂರು-11.	ಸದಸ್ಯರು
6)	ಡಾ: ಸುಭಾಷ್ ಭರಣಿ, ನಿವೃತ್ತ ಐ.ಪಿ.ಎಸ್. ಅಧಿಕಾರಿ, ನಂ. 23, 8ನೇ 'ಎ' ಮುಖ್ಯರಸ್ತೆ, ಆರ್.ಎಂ.ವಿ. ವಿಲಾಸ್ ಎಕ್ಸ್‌ಟೆನ್ಷನ್, ಸದಾಶಿವನಗರ, ಬೆಂಗಳೂರು-80	ಸದಸ್ಯರು
7)	ಶ್ರೀ ಅಜಯ್ ಗೋವಿಂದರಾಜ್, ವಕೀಲರು, 101, ರಮಣಶ್ರೀ ಛೇಂಬರ್ಸ್, ಲೇಡಿ ಕರ್ಜನ್ ರಸ್ತೆ, ಬೆಂಗಳೂರು-1	ಸದಸ್ಯರು
8)	ನಿರ್ದೇಶಕರು, ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಬೆಂಗಳೂರು-29	ಸದಸ್ಯ ಕಾರ್ಯದರ್ಶಿ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.87

ಎಸ್. ಮಹಾಲಕ್ಷ್ಮಮ್ಮ

ಸರ್ಕಾರದ ಅಧೀನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)

ವಿಷಯ: ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿ ಔಷಧ ಪರೀಕ್ಷಾ ಪ್ರಯೋಗಾಲಯಗಳನ್ನು ಸ್ಥಾಪಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಆಕುಕ 99 ಐಎಂಎಂ 2008, ದಿನಾಂಕ 4-10-2008.
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಔನಿಇ/23/ಲೆಪವಿ/2008-09, ದಿನಾಂಕ 25-10-2008.
3. ಸರ್ಕಾರದ ಆದೇಶ ಸಂಖ್ಯೆ: ಆಇ 2352 ವೆಚ್ಚ-5/2008, ದಿನಾಂಕ 19-11-2008.

ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ. (1)ರಲ್ಲಿನ ಸರ್ಕಾರದ ಆದೇಶದಲ್ಲಿ, ಹುಬ್ಬಳ್ಳಿ ಮತ್ತು ಬಳ್ಳಾರಿಗಳಲ್ಲಿ ಸ್ಥಾಪಿಸಲಾಗುವ ಪ್ರತಿ ಔಷಧ ಪರೀಕ್ಷಾ ಪ್ರಯೋಗಾಲಯಕ್ಕೆ 61 ವಿವಿಧ ತಾಂತ್ರಿಕ ಸಿಬ್ಬಂದಿ ಮತ್ತು 37 ಪೂರಕ ಸಿಬ್ಬಂದಿ ಒಟ್ಟು 98 ಹುದ್ದೆಗಳನ್ನು ಸೃಜಿಸಲು ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆ.

ಮೇಲೆ ಓದಲಾದ ಕ್ರ.ಸಂ. (2)ರ ಪತ್ರದಲ್ಲಿ, ಔಷಧ ನಿಯಂತ್ರಕರು, ಬೆಂಗಳೂರು ಇವರು ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿ ತಕ್ಷಣದಿಂದ ಒಂದೊಂದು ಶಾಖೆಯೊಂದಿಗೆ ಬಾಡಿಗೆ ಕಟ್ಟಡದಲ್ಲಿ ಔಷಧ ಪರೀಕ್ಷಾ ಪ್ರಯೋಗಾಲಯಗಳನ್ನು ಪ್ರಾರಂಭಿಸಲಾಗುವುದೆಂದು ತಿಳಿಸಿ, ಸದರಿ ಪರೀಕ್ಷಾ ಪ್ರಯೋಗಾಲಯದಲ್ಲಿ ಕಾರ್ಯ ನಿರ್ವಹಿಸಲು ಬೆಂಗಳೂರಿನಲ್ಲಿರುವ ಕೆಲವು ಸಿಬ್ಬಂದಿಗಳನ್ನು ಈ ಎರಡು ಉದ್ದೇಶಿತ ಪ್ರಯೋಗಾಲಯಗಳಿಗೆ ವರ್ಗಾಯಿಸಿ ಅವರ ಸಂಬಳ, ಬಟವಾಡೆ ಇತ್ಯಾದಿ ಎಲ್ಲಾ ಪ್ರಕಾರದ ಖರ್ಚುಗಳನ್ನು ಮಾಡಲು ಸೂಕ್ತ ಉಪ ಲೆಕ್ಕ ಶೀರ್ಷಿಕೆಗಳ ಅವಶ್ಯಕತೆಯಿದ್ದು ಸದರಿ ಉಪ ಲೆಕ್ಕಶೀರ್ಷಿಕೆಗಳಲ್ಲಿ ಹಣ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಯನ್ನಾಗಿ ಸಂಬಂಧಿಸಿದ ಪ್ರಯೋಗಾಲಯದ ಅಧೀಕ್ಷಕರುಗಳನ್ನು ನೇಮಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (3)ರಲ್ಲಿ ಆರ್ಥಿಕ ಇಲಾಖೆಯು ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿ ಔಷಧ ಪರೀಕ್ಷಾ ಪ್ರಯೋಗಾಲಯವನ್ನು ಸ್ಥಾಪಿಸಲು 2008-09ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ (ಹೊಸ ಶೀರ್ಷಿಕೆ) 4210-03-105-2-03-386 (ಯೋಜನೆ) (ಎಫ್ಎಸ್) ಅಡಿಯಲ್ಲಿ ಒದಗಿಸಿರುವ ಒಟ್ಟು ರೂ. 500 ಲಕ್ಷಗಳಲ್ಲಿ ರೂ. 100 ಲಕ್ಷಗಳನ್ನು ಸರ್ಕಾರಕ್ಕೆ ಅಧ್ಯರ್ಪಿಸಿಕೊಂಡಿರುತ್ತದೆ.

ಆದುದರಿಂದ, ಬಳ್ಳಾರಿ ಮತ್ತು ಹುಬ್ಬಳ್ಳಿಯಲ್ಲಿನ ಔಷಧ ಪರೀಕ್ಷಾ ಪ್ರಯೋಗಾಲಯಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಹಣ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಯನ್ನಾಗಿ ಆ ಪ್ರಯೋಗಾಲಯದ ಅಧೀಕ್ಷಕರುಗಳನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಆಕುಕ 99 ಐಎಂಎಂ 2008, ಬೆಂಗಳೂರು, ದಿನಾಂಕ 26ನೇ ನವೆಂಬರ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿನ ಔಷಧ ಪರೀಕ್ಷಾ ಪ್ರಯೋಗಾಲಯದಲ್ಲಿ 2008-09ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ (ಹೊಸ ಶೀರ್ಷಿಕೆ) 2210-06-104-0-12 (ಯೋಜನೆ) ಅಡಿಯಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಬಳ್ಳಾರಿ ಮತ್ತು ಹುಬ್ಬಳ್ಳಿಯಲ್ಲಿನ ಔಷಧ ಪರೀಕ್ಷಾ ಪ್ರಯೋಗಾಲಯಗಳಿಗೆ ತಲಾ ರೂ. 50.00 ಲಕ್ಷಗಳಂತೆ (ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಹೊಸ ರೆವಿನ್ಯೂ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಈ ಕೆಳಕಂಡಂತೆ ಹೆಚ್ಚುವರಿ ಅನುದಾನವಾಗಿ ಸರ್ಕಾರವು ಒದಗಿಸಿದೆ.

ಲೆಕ್ಕ ಶೀರ್ಷಿಕೆ 2210-06-104-0-12 (ಯೋಜನೆ) ಔಷಧ ಪರೀಕ್ಷಾ ಪ್ರಯೋಗಾಲಯ, ಹುಬ್ಬಳ್ಳಿ (ರೂ. ಲಕ್ಷಗಳಲ್ಲಿ)

-002	ವೇತನ ಅಧಿಕಾರಿಗಳು	-1.65
-003	ವೇತನ-ಸಿಬ್ಬಂದಿ	-2.37
-011	ತುಟ್ಟಿ ಭತ್ಯೆ	-1.07
-014	ಇತರೆ ಭತ್ಯೆ	-0.31
-041	ಪ್ರಯಾಣ ವೆಚ್ಚಗಳು	-1.00
-051	ಸಾಮಾನ್ಯ ವೆಚ್ಚಗಳು	-13.00
-052	ದೂರವಾಣಿ ವೆಚ್ಚ	-1.00
-053	ಪೀಠೋಪಕರಣಗಳ ಖರೀದಿ	-10.00
-071	ಕಟ್ಟಡ ವೆಚ್ಚಗಳು	-2.50
-180	ಯಂತ್ರೋಪಕರಣಗಳು & ಸಾಧನ ಸಾಮಗ್ರಿಗಳು	-10.00
-200	ನಿರ್ವಹಣೆ	-1.10
-221	ಸಾಮಗ್ರಿ ಮತ್ತು ಸರಬರಾಜು	-6.00
	ಒಟ್ಟು	**-50.00**

ಹೊಸ ಲೆಕ್ಕ ಶೀರ್ಷಿಕೆ 2210-06-104-0-13 (ಯೋಜನೆ) ಔಷಧ ಪರೀಕ್ಷಾ ಪ್ರಯೋಗಾಲಯ, ಬಳ್ಳಾರಿ (ರೂ. ಲಕ್ಷಗಳಲ್ಲಿ)

-002	ವೇತನ ಅಧಿಕಾರಿಗಳು	-1.65
-003	ವೇತನ-ಸಿಬ್ಬಂದಿ	-2.37
-011	ತುಟ್ಟಿ ಭತ್ಯೆ	-1.07
-014	ಇತರೆ ಭತ್ಯೆ	-0.31
-041	ಪ್ರಯಾಣ ವೆಚ್ಚಗಳು	-1.00
-051	ಸಾಮಾನ್ಯ ವೆಚ್ಚಗಳು	-14.00
-052	ದೂರವಾಣಿ ವೆಚ್ಚ	-1.00
-053	ಪೀಠೋಪಕರಣಗಳ ಖರೀದಿ	-10.00
-071	ಕಟ್ಟಡ ವೆಚ್ಚಗಳು	-1.50
-180	ಯಂತ್ರೋಪಕರಣಗಳು & ಸಾಧನ ಸಾಮಗ್ರಿಗಳು	-10.00
-200	ನಿರ್ವಹಣೆ	-1.10
-221	ಸಾಮಗ್ರಿ ಮತ್ತು ಸರಬರಾಜು	-6.00
	ಒಟ್ಟು	**-50.00**

ಈ ಹೆಚ್ಚುವರಿ ರೂ. 100.00 ಲಕ್ಷಗಳನ್ನು 2008-09ನೇ ಸಾಲಿನ ಪೂರಕ ಅಂದಾಜುಗಳು-2ನೇ ಕಂತಿನಲ್ಲಿ ಸಕ್ರಮಗೊಳಿಸಲಾಗುವುದು. ಪೂರಕ ಅಂದಾಜುಗಳು-2ನೇ ಕಂತು ಸಕ್ರಮಗೊಂಡ ನಂತರವೇ ಹಣ ಬಿಡುಗಡೆ ಗೊಳಿಸಲಾಗುವುದು.

ಬಳ್ಳಾರಿ ಮತ್ತು ಹುಬ್ಬಳ್ಳಿಯಲ್ಲಿನ ಔಷಧ ಪರೀಕ್ಷಾ ಪ್ರಯೋಗಾಲಯಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಅಧೀಕ್ಷಕರು, ಬಳ್ಳಾರಿ ಮತ್ತು ಹುಬ್ಬಳ್ಳಿಗಳಲ್ಲಿನ ಔಷಧ ಪರೀಕ್ಷಾ ಪ್ರಯೋಗಾಲಯ ಇವರನ್ನು ಹಣ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 2352 ವೆಚ್ಚ-5/2008, ದಿನಾಂಕ 22-11-2008 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.88

ಎನ್. ಮಹಾಲಕ್ಷ್ಮಮ್ಮ

ಸರ್ಕಾರದ ಅಧೀನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

(ಭಾರತೀಯ ವೈದ್ಯ ಪದ್ಧತಿ)

ವಿಷಯ: ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿನ ಪ್ರಾದೇಶಿಕ ಔಷಧ ಪರೀಕ್ಷಾ ಪ್ರಯೋಗಾಲಯಗಳನ್ನು ಪ್ರಾರಂಭಿಸಲು ತಾಂತ್ರಿಕ ಮತ್ತು ಇತರೆ ಸಿಬ್ಬಂದಿಯನ್ನು ರಿ-ಡಿಪ್ಲಾಯ್‌ಮೆಂಟ್ ಮೂಲಕ ನಿಯೋಜಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಆಕುಕ 99 ಐಎಂಎಂ 2008, ದಿನಾಂಕ 4-10-2008.
2. ಸರ್ಕಾರದ ಆದೇಶ ಸಂಖ್ಯೆ: ಆಕುಕ 99 ಐಎಂಎಂ 2008, ದಿನಾಂಕ 26-11-2008.
3. ಸರ್ಕಾರದ ಆದೇಶ ಸಂಖ್ಯೆ: ಆಕುಕ 111 ಐಎಂಎಂ 2007, ದಿನಾಂಕ 1-12-2008.
4. ಸರ್ಕಾರದ ಆದೇಶ ಸಂಖ್ಯೆ: ಆಕುಕ 99 ಐಎಂಎಂ 2008, ದಿನಾಂಕ 8-12-2008 & 10-12-2008.
5. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ಏಕಕಡತ ಸಂಖ್ಯೆ: ಔನಿಇ/ 249/ಸಿಬ್ಬಂದಿ/2008-09.

ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ. (1)ರಲ್ಲಿನ ಸರ್ಕಾರದ ಆದೇಶದಲ್ಲಿ, ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿ ರೂ. 1500-00 ಲಕ್ಷಗಳಲ್ಲಿ ಪ್ರಾದೇಶಿಕ ಔಷಧ ಪರೀಕ್ಷಾ ಪ್ರಯೋಗಾಲಯಗಳನ್ನು 2008-09ನೇ ಸಾಲಿನಲ್ಲಿ ಸ್ವಂತ ಕಟ್ಟಡ ನಿರ್ಮಾಣ ಮಾಡುವವರೆಗೆ ಒಂದೊಂದು ಶಾಖೆಯೊಂದಿಗೆ ಬಾಡಿಗೆ ಕಟ್ಟಡದಲ್ಲಿ ಪ್ರಾರಂಭಿಸಲು ಹಾಗೂ ಪ್ರತಿ ಔಷಧ ಪರೀಕ್ಷಾ ಪ್ರಯೋಗಾಲಯಕ್ಕೆ 61 ವಿವಿಧ ತಾಂತ್ರಿಕ ಸಿಬ್ಬಂದಿ ಮತ್ತು 37 ಪೂರಕ ಸಿಬ್ಬಂದಿ ಒಟ್ಟು 98 ಹುದ್ದೆಗಳನ್ನು ಸೃಜಿಸಿ ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆ.

ಮೇಲೆ ಓದಲಾದ ಕ್ರ.ಸಂ. (2)ರಲ್ಲಿನ ಸರ್ಕಾರದ ಆದೇಶದಲ್ಲಿ, ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿನ ಔಷಧ ಪರೀಕ್ಷಾ ಪ್ರಯೋಗಾಲಯಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ, ಕ್ರಮವಾಗಿ ಹುಬ್ಬಳ್ಳಿ ಮತ್ತು ಬಳ್ಳಾರಿಗಳಲ್ಲಿನ ಔಷಧ ಪರೀಕ್ಷಾ ಪ್ರಯೋಗಾಲಯಗಳ ಅಧೀಕ್ಷಕರುಗಳನ್ನು ಹಣ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಯನ್ನಾಗಿ ನೇಮಕ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ. (3)ರಲ್ಲಿನ ಸರ್ಕಾರದ ಆದೇಶದಲ್ಲಿ, ಔಷಧ ಪರೀಕ್ಷಾ ಪ್ರಯೋಗಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧೀಕ್ಷಕರು, ಸೀನಿಯರ್ ಕೆಮಿಸ್ಟ್, ಜೂನಿಯರ್ ಕೆಮಿಸ್ಟ್ ಹುದ್ದೆಗಳನ್ನು ಚೀಫ್ ಸೈಂಟಿಫಿಕ್ ಆಫೀಸರ್, ಸೈಂಟಿಫಿಕ್ ಆಫೀಸರ್ ಮತ್ತು ಜೂನಿಯರ್ ಸೈಂಟಿಫಿಕ್ ಆಫೀಸರ್ ಎಂದು ಮರು ಪದನಾಮೀಕರಿಸಿ ಸರ್ಕಾರದ ಅನುಮೋದನೆಯನ್ನು ನೀಡಿದೆ.

ಮೇಲೆ ಓದಲಾದ ಕ್ರ.ಸಂ. (4)ರಲ್ಲಿನ ಸರ್ಕಾರದ ಆದೇಶಗಳಲ್ಲಿ, ಹುಬ್ಬಳ್ಳಿ ಮತ್ತು ಬಳ್ಳಾರಿಯ ಔಷಧ ಪರೀಕ್ಷಾ ಪ್ರಯೋಗಾಲಯಗಳನ್ನು ಹೊಸ ಕಟ್ಟಡ ನಿರ್ಮಾಣ ಮಾಡುವವರೆಗೆ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸಲು ಅನುಕೂಲವಾಗುವಂತೆ ಬಾಡಿಗೆ ಕಟ್ಟಡಗಳನ್ನು ಮತ್ತು ಅವುಗಳ ಸಭಾಂಗಣವನ್ನು ಪ್ರಯೋಗಾಲಯಕ್ಕೆ ತಕ್ಕಂತೆ ಸುಸಜ್ಜಿತಗೊಳಿಸಲು ಮತ್ತು ಹೊಸ ಕಟ್ಟಡ ಕಾಮಗಾರಿಗೆ ತಲಾ ರೂ. 1.00 ಕೋಟಿಯನ್ನು ಬಿಡುಗಡೆ ಮಾಡಿದೆ.

ಮೇಲೆ ಓದಲಾದ ಕ್ರ.ಸಂ. (5)ರಲ್ಲಿನ ಏಕಕಡತ ಪದ್ಧತಿಯಲ್ಲಿನ ಟಿಪ್ಪಣಿಯಲ್ಲಿ ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿ ಒಂದೊಂದು ಶಾಖೆಯೊಂದಿಗೆ ಪ್ರಯೋಗಾಲಯವನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದ್ದು, ಸದರಿ ಪ್ರಯೋಗಾಲಯಗಳನ್ನು ಸೂಕ್ತ ಸಮಯದಲ್ಲಿ ಪ್ರಾರಂಭಿಸಲು ಸದರಿ ಪ್ರಯೋಗಾಲಯಗಳಲ್ಲಿ ಸೃಜಿಸಲಾದ ತಾಂತ್ರಿಕ ಸಿಬ್ಬಂದಿ ಮತ್ತು ಪೂರಕ ಸಿಬ್ಬಂದಿಗಳನ್ನು ಶಾಶ್ವತವಾಗಿ ತುಂಬುವವರೆಗೆ ಬಾಡಿಗೆ ಕಟ್ಟಡದಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಕೂಡಲೇ ಪ್ರಾರಂಭಿಸಲು

ಇಲಾಖೆಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಕೆಲವು ಸಿಬ್ಬಂದಿಗಳನ್ನು ರಿ-ಡಿಪ್ಲಾಯ್‌ಮೆಂಟ್ ಮೂಲಕ ತುಂಬಲು ಸರ್ಕಾರದ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿನ ಪ್ರಾದೇಶಿಕ ಔಷಧ ಪರೀಕ್ಷಾ ಪ್ರಯೋಗಾಲಯಗಳನ್ನು 2008-09ನೇ ಸಾಲಿನಲ್ಲಿ ಪ್ರಾರಂಭಿಸಬೇಕಾಗಿರುವುದರಿಂದ, ಸದರಿ ಪ್ರಾದೇಶಿಕ ಔಷಧ ಪರೀಕ್ಷಾ ಪ್ರಯೋಗಾಲಯಗಳಿಗೆ ಮಂಜೂರಾಗಿರುವ ಹುದ್ದೆಗಳನ್ನು ತುಂಬುವವರೆಗೆ ಔಷಧ ನಿಯಂತ್ರಣ ಇಲಾಖೆಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಕೆಲವು ತಾಂತ್ರಿಕ ಮತ್ತು ಪೂರಕ ಸಿಬ್ಬಂದಿಗಳನ್ನು ರಿ-ಡಿಪ್ಲಾಯ್‌ಮೆಂಟ್ ಮೂಲಕ ತುಂಬಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಆಕುಕ 154 ಐಎಂಎಂ 2008, ಬೆಂಗಳೂರು, ದಿನಾಂಕ 15ನೇ ಡಿಸೆಂಬರ್ 2008.

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಹುಬ್ಬಳ್ಳಿ ಮತ್ತು ಬಳ್ಳಾರಿಯಲ್ಲಿನ ಪ್ರಾದೇಶಿಕ ಔಷಧ ಪರೀಕ್ಷಾ ಪ್ರಯೋಗಾಲಯಗಳನ್ನು 2008-09ನೇ ಸಾಲಿನಲ್ಲಿ ಪ್ರಾರಂಭಿಸಲು ಸದರಿ ಪ್ರಾದೇಶಿಕ ಔಷಧ ಪರೀಕ್ಷಾ ಪ್ರಯೋಗಾಲಯಗಳಿಗೆ ಬೆಂಗಳೂರಿನಲ್ಲಿರುವ ಔಷಧ ಪ್ರಯೋಗಾಲಯದಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ಅಧಿಕಾರಿಗಳನ್ನು/ ನೌಕರರುಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಮರುವಿನ್ಯಾಸದ (On Redeployment) ಮೂಲಕ ನೇಮಿಸಲಾಗಿದೆ.

ಕ್ರಮ ಸಂಖ್ಯೆ	ಅಧಿಕಾರಿ / ಸಿಬ್ಬಂದಿ ಹೆಸರು ಮತ್ತು ಪದನಾಮ	ರಿ-ಡಿಪ್ಲಾಯ್‌ಮೆಂಟ್ ಮೂಲಕ ನೇಮಕ ಮಾಡಲಾದ ಸ್ಥಳ
	ಔಷಧ ಪರೀಕ್ಷಾ ಪ್ರಯೋಗಾಲಯ, ಹುಬ್ಬಳ್ಳಿ	
1	ಶ್ರೀಮತಿ ಪಾರ್ವತಿ ಆನಂದಗೌಡರ್, ಚೀಫ್ ಸೈಂಟಿಫಿಕ್ ಆಫೀಸರ್, ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಹುಬ್ಬಳ್ಳಿ - ಹೊಸದಾಗಿ ಸೃಜನೆಗೊಂಡ ಚೀಫ್ ಸೈಂಟಿಫಿಕ್ ಆಫೀಸರ್ ಹುದ್ದೆಗೆ
2	ಶ್ರೀ ಎಮ್.ಎಸ್. ಲೋಕೇಶ ಪ್ರಸಾದ, ಜೂನಿಯರ್ ಸೈಂಟಿಫಿಕ್ ಆಫೀಸರ್, ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಹುಬ್ಬಳ್ಳಿ - ಹೊಸದಾಗಿ ಸೃಜನೆಗೊಂಡ ಜೂನಿಯರ್ ಸೈಂಟಿಫಿಕ್ ಆಫೀಸರ್ ಹುದ್ದೆಗೆ
3	ಶ್ರೀ ವೈ.ಕೆ. ಚಿದಾನಂದ ಪ್ರಯೋಗಶಾಲಾ ತಂತ್ರಜ್ಞ (ಔಷಧ), ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಹುಬ್ಬಳ್ಳಿ - ಹೊಸದಾಗಿ ಸೃಜನೆಗೊಂಡ ಪ್ರಯೋಗ ಶಾಲಾ ತಂತ್ರಜ್ಞ (ಔಷಧ) ಹುದ್ದೆಗೆ
4	ಶ್ರೀಮತಿ ಸೀಮಾ ಶೆಟ್ಟಿ, ಪ್ರಯೋಗಶಾಲಾ ತಂತ್ರಜ್ಞ, ಸರ್ಕಾರಿ ಔಷಧ ವಿಜ್ಞಾನ ಮಹಾ ವಿದ್ಯಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಹುಬ್ಬಳ್ಳಿ - ಹೊಸದಾಗಿ ಸೃಜನೆಗೊಂಡ ಉಗ್ರಾಣ ಪಾಲಕರು ಹುದ್ದೆಗೆ
5	ಶ್ರೀ ಎಚ್. ಶ್ರೀನಿವಾಸ ಪ್ರಯೋಗಶಾಲಾ ಪರಿಚಾರಕರು, ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಹುಬ್ಬಳ್ಳಿ - ಹೊಸದಾಗಿ ಸೃಜನೆಗೊಂಡ ಪ್ರಯೋಗ ಶಾಲಾ ಪರಿಚಾರಕರು ಹುದ್ದೆಗೆ
6	ಶ್ರೀ ಅಬ್ದುಲ ವಹಾಬ ರಾಹುತ, ಬೆರಳಚ್ಚುಗಾರರು, ಗುಲ್ಬರ್ಗಾ ವೃತ್ತ (ಬೆರಳಚ್ಚುಗಾರರ ಹುದ್ದೆಯಿಂದ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಅವರ ಕೋರಿಕೆಯ ಮೇರೆಗೆ ಬದಲಾವಣೆಯ ಅನುಮತಿಯೊಂದಿಗೆ)	ಔಷಧ ಪರೀಕ್ಷಾ ಪ್ರಯೋಗಾಲಯ, ಹುಬ್ಬಳ್ಳಿ - ಹೊಸದಾಗಿ ಸೃಜನೆಗೊಂಡ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ
	ಔಷಧ ಪರೀಕ್ಷಾ ಪ್ರಯೋಗಾಲಯ, ಬಳ್ಳಾರಿ	
7	ಶ್ರೀ ಎಸ್.ಎನ್. ಶಿವಶಂಕರ, ಸೈಂಟಿಫಿಕ್ ಆಫೀಸರ್, ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಬಳ್ಳಾರಿ - ಹೊಸದಾಗಿ ಸೃಜನೆಗೊಂಡ ಸೈಂಟಿಫಿಕ್ ಆಫೀಸರ್ ಹುದ್ದೆಗೆ
8	ಶ್ರೀಮತಿ ಶೈಲಾವತಿ, ಜೂನಿಯರ್ ಸೈಂಟಿಫಿಕ್ ಆಫೀಸರ್, ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಬಳ್ಳಾರಿ - ಹೊಸದಾಗಿ ಸೃಜನೆಗೊಂಡ ಜೂನಿಯರ್ ಸೈಂಟಿಫಿಕ್ ಆಫೀಸರ್ ಹುದ್ದೆಗೆ

9	ಶ್ರೀ ನಾಗರಾಜ ಸುಂಕದ್, ಜೂನಿಯರ್ ಸೈಂಟಿಫಿಕ್ ಆಫೀಸರ್, ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಬಳ್ಳಾರಿ – ಹೊಸದಾಗಿ ಸೃಜನೆಗೊಂಡ ಜೂನಿಯರ್ ಸೈಂಟಿಫಿಕ್ ಆಫೀಸರ್ ಹುದ್ದೆಗೆ
10	ಶ್ರೀ ಲಕ್ಷ್ಮೀಕಾಂತಯ್ಯ, ಪ್ರಯೋಗಶಾಲಾ ತಂತ್ರಜ್ಞ (ಔಷಧ), ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಬಳ್ಳಾರಿ – ಹೊಸದಾಗಿ ಸೃಜನೆಗೊಂಡ ಪ್ರಯೋಗ ಶಾಲಾ ತಂತ್ರಜ್ಞ (ಔಷಧ) ಹುದ್ದೆಗೆ
11	ಶ್ರೀ ಎಚ್.ಆರ್. ಸಂತೋಷಕುಮಾರ, ಪ್ರಯೋಗಶಾಲಾ ತಂತ್ರಜ್ಞ, ಸರ್ಕಾರಿ ಔಷಧ ವಿಜ್ಞಾನ ಮಹಾ ವಿದ್ಯಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಬಳ್ಳಾರಿ – ಹೊಸದಾಗಿ ಸೃಜನೆಗೊಂಡ ಉಗ್ರಾಣ ಪಾಲಕರು ಹುದ್ದೆಗೆ
12	ಶ್ರೀ ಎಸ್. ವೆಂಕಟೇಶಪ್ಪ, ಪ್ರಯೋಗಶಾಲಾ ಪರಿಚಾರಕರು, ಔಷಧ ಪರೀಕ್ಷಾ ಪ್ರಯೋಗಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಬಳ್ಳಾರಿ – ಹೊಸದಾಗಿ ಸೃಜನೆಗೊಂಡ ಪ್ರಯೋಗ ಶಾಲಾ ಪರಿಚಾರಕರು ಹುದ್ದೆಗೆ
13	ಶ್ರೀ ದತ್ತಪ್ಪ ಶಂಕರಪ್ಪ ಸಿನ್ನೂರ, ದ್ವಿತೀಯ ದರ್ಜೆ ಸಹಾಯಕರು, ಸರ್ಕಾರಿ ಔಷಧ ವಿಜ್ಞಾನ ಮಹಾ ವಿದ್ಯಾಲಯ, ಬೆಂಗಳೂರು	ಔಷಧ ಪರೀಕ್ಷಾ ಪ್ರಯೋಗಾಲಯ, ಬಳ್ಳಾರಿ – ಹೊಸದಾಗಿ ಸೃಜನೆಗೊಂಡ ದ್ವಿತೀಯ ದರ್ಜೆ ಸಹಾಯಕರು ಹುದ್ದೆಗೆ

ತಾಂತ್ರಿಕ ಸಿಬ್ಬಂದಿಯವರಿಗೆ ಸಂಬಂಧಪಟ್ಟಂತೆ ಈ ಮರುವಿನ್ಯಾಸವು (Redeployment) ತಾತ್ಕಾಲಿಕವಾಗಿ ಆರು (06) ತಿಂಗಳ ಮಟ್ಟಿಗೆ ಅಥವಾ ನಿಯಮಾನುಸಾರ ಈ ಹುದ್ದೆಗಳನ್ನು ತುಂಬುವವರೆಗೆ ಮಾತ್ರ ಜಾರಿಯಲ್ಲಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.126

ಎನ್. ಮಹಾಲಕ್ಷ್ಮಮ್ಮ

ಸರ್ಕಾರದ ಅಧೀನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

(ಭಾರತೀಯ ವೈದ್ಯ ಪದ್ಧತಿ)

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ

ವಿಷಯ: ಶ್ರೀ ಯಮುನಪ್ಪ ಆರ್. ಭಜಂತ್ರಿ, ರೇಷ್ಮೆ ಪ್ರದರ್ಶಕರು ಇವರ ಪರಿವೀಕ್ಷಣಾ ಅವಧಿ ವಿಸ್ತರಿಸುವ ಬಗ್ಗೆ.

ಓದಲಾಗಿದೆ:
1. ಅಧಿಕೃತ ಜ್ಞಾಪನ ಸಂಖ್ಯೆ: ಸಿಬ್ಬಂದಿ1(8)/ಪಪೂಅ/184/2006-07, ದಿನಾಂಕ 24-10-2008.
2. ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರು ಇವರ ಪತ್ರ ಸಂಖ್ಯೆ: ಸಿಬ್ಬಂದಿ1(8)/ಪಪೂಅ/184/2006-07, ದಿನಾಂಕ 24-10-2008.

ಪ್ರಸ್ತಾವನೆ:

ಶ್ರೀ ಯಮುನಪ್ಪ ಆರ್. ಭಜಂತ್ರಿ, ರೇಷ್ಮೆ ಪ್ರದರ್ಶಕರು, ತಾಂತ್ರಿಕ ಸೇವಾ ಕೇಂದ್ರ, ಚಿಲಕವಾಡಿ ಇವರು ದಿನಾಂಕ 29-5-2004ರಲ್ಲಿ ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. ಇವರ ಪರೀಕ್ಷಾ ಪೂರ್ವ ಅವಧಿಯನ್ನು ದಿನಾಂಕ 28-5-2006ರಂದು ಘೋಷಿಸಬೇಕಾಗಿತ್ತು. ಆದರೆ ಸದರಿಯವರು ನಿಗಧಿಪಡಿಸಿದ ಇಲಾಖಾ ಪರೀಕ್ಷೆಗಳನ್ನು ವಿಳಂಬವಾಗಿ ಪಾಸು ಮಾಡಿಕೊಂಡಿರುವುದರಿಂದ ಇವರ ಪರೀಕ್ಷಾ ಪೂರ್ವ ಅವಧಿಯನ್ನು ದಿನಾಂಕ 29-5-2006 ರಿಂದ 2-8-2007ರ ವರೆಗೆ ವಿಸ್ತರಿಸಬೇಕಾಗಿರುತ್ತದೆ. ನೇಮಕಾತಿ ಪ್ರಾಧಿಕಾರವಾದ ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಗಳು 1977ರ ನಿಯಮ 4(1)(ii) ರನ್ವಯ ಇರುವ ಅಧಿಕಾರ ವ್ಯಾಪ್ತಿಯಂತೆ ನೌಕರರ ಪರಿವೀಕ್ಷಣಾ ಅವಧಿಯನ್ನು ದಿನಾಂಕ 29-5-2006 ರಿಂದ 28-5-2007 ರವರೆಗೆ ವಿಸ್ತರಿಸಿ, ಉಳಿದ ಅವಧಿಗೆ ಅಂದರೆ ದಿನಾಂಕ 29-5-2007 ರಿಂದ 2-8-2007 ರವರೆಗೆ ಸದರಿ ನಿಯಮಗಳ ನಿಯಮ 4(1)(i)ರಂತೆ ಪರಿವೀಕ್ಷಣಾ ಅವಧಿಯನ್ನು ವಿಸ್ತರಿಸುವಂತೆ ಮೇಲೆ ಓದಲಾದ ಕ್ರಮಸಂಖ್ಯೆ (2)ರ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಿ ನೌಕರರ ಪರಿವೀಕ್ಷಣಾ ಅವಧಿಯನ್ನು ವಿಸ್ತರಿಸಲು ತೀರ್ಮಾನಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ವಾಕೈ 172 ರೇಇವಿ 2008, ಬೆಂಗಳೂರು, ದಿನಾಂಕ 22ನೇ ನವೆಂಬರ್ 2008.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಶ್ರೀ ಯಮುನಪ್ಪ ಆರ್. ಭಜಂತ್ರಿ, ರೇಷ್ಮೆ ಪ್ರದರ್ಶಕರು. ತಾಂತ್ರಿಕ ಸೇವಾ ಕೇಂದ್ರ, ಚಿಲಕವಾಡಿ ಇವರ ಪರಿವೀಕ್ಷಣಾ ಅವಧಿಯನ್ನು ದಿನಾಂಕ 29-5-2007 ರಿಂದ 2-8-2007 ರವರೆಗೆ ಕರ್ನಾಟಕ ನಾಗರೀಕ ಸೇವಾ (ಪರೀಕ್ಷಾರ್ಥ) ನಿಯಮಗಳು 1977ರ ನಿಯಮ 4(1)(i) ರನ್ವಯ ವಿಸ್ತರಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.26

ಭಾರತಿ ಆರ್. ನಾಯಕ್

ಪೀಠಾಧಿಕಾರಿ (ರೇಷ್ಮೆ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ವಿಷಯ : ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ – ಕರ್ನಾಟಕ ಇದರಡಿ, 2008-09ನೇ ಸಾಲಿನಲ್ಲಿ ಬಳ್ಳಾರಿ ಜಿಲ್ಲೆಗೆ ಎರಡನೇ ಕಂತಿನ ರಾಜ್ಯದ ಪಾಲನ್ನು ಬಿಡುಗಡೆ ಮಾಡುತ್ತಿರುವ ಬಗ್ಗೆ.

ಉಲ್ಲೇಖ : ಕೇಂದ್ರ ಸರ್ಕಾರದ ಪತ್ರದ ಸಂ. ಜೆ-12022/4/2008-ಎನ್.ಆರ್.ಇ.ಜಿ.ಎ.-ಎಸ್.ಎಲ್.ನಂ. 382 ದಿ: 1-12-2008.

ಪ್ರಸ್ತಾವನೆ :

ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನಕ್ಕಾಗಿ ಉಲ್ಲೇಖಿತ ಪತ್ರದಲ್ಲಿ ಕೇಂದ್ರ ಸರ್ಕಾರವು ಬಳ್ಳಾರಿ ಜಿಲ್ಲೆಗೆ ರೂ. 398.86 ಲಕ್ಷಗಳನ್ನು ಎರಡನೇ ಕಂತಾಗಿ ನೇರವಾಗಿ ಬಿಡುಗಡೆ ಮಾಡಿ, ಅದಕ್ಕೆ ಪೂರಕವಾಗಿ ರಾಜ್ಯ ಸರ್ಕಾರವು ತನ್ನ ಪಾಲಿನ ಅನುದಾನವನ್ನು ಹದಿನೈದು ದಿನಗಳೊಳಗಾಗಿ ಬಿಡುಗಡೆ ಮಾಡುವಂತೆ ಆದೇಶಿಸಿರುತ್ತದೆ. 2008-09ನೇ ಸಾಲಿನಲ್ಲಿ ಸದರಿ ಯೋಜನೆಗೆ ಆಯವ್ಯಯದಲ್ಲಿ ಅನುದಾನವನ್ನು ರಾಜ್ಯದ ಪಾಲಾಗಿ, ಸಾಮಗ್ರಿಗಳ ಬಳಕೆಗಾಗಿ ಶೇಕಡ 10ರಷ್ಟಾಗಿ ಬಿಡುಗಡೆ ಮಾಡಲು ಒದಗಿಸಲಾಗಿರುತ್ತದೆ. ಆದುದರಿಂದ, ಪ್ರಸ್ತುತ ಸಾಲಿನಲ್ಲಿ ಬಳ್ಳಾರಿ ಜಿಲ್ಲೆಗೆ, ಉದ್ಯೋಗ ಖಾತರಿ ಯೋಜನೆಯಡಿ, ಸಾಮಗ್ರಿಗಳ ಘಟಕದ ಬಳಕೆಗಾಗಿ, ಶೇಕಡಾ 10ರಷ್ಟಾದ ರೂ. 39.886 ಲಕ್ಷಗಳನ್ನು ಅನುಬಂಧದಲ್ಲಿ ನಮೂದಿಸಿದಂತೆ, ಬಿಡುಗಡೆ ಮಾಡಲು ನಿರ್ಧರಿಸಿದೆ. ಆದುದರಿಂದ, ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 121 ಉಖಾಯೋ 08 ಬೆಂಗಳೂರು, ದಿನಾಂಕ: 27ನೇ ಡಿಸೆಂಬರ್ 2008.

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ- ಕರ್ನಾಟಕ ಇದರಡಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ, 2008-09ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನಕ್ಕೆ ಅನುಗುಣವಾಗಿ ರಾಜ್ಯದ ಪಾಲನ್ನು ಎರಡನೇ ಕಂತಿನ ಅನುದಾನವಾದ ರೂ. 39.886 ಲಕ್ಷಗಳನ್ನು (ರೂ. ಮೂವತ್ತೊಂಭತ್ತು ಲಕ್ಷ ಎಂಭತ್ತೆಂಟು ಸಾವಿರದ ಆರು ನೂರು ಮಾತ್ರ) ಅನುಬಂಧದಲ್ಲಿ ನಮೂದಿಸಿದಂತೆ, ಸಾಮಗ್ರಿ ಘಟಕದ ವೆಚ್ಚಕ್ಕೆ ಬಳಸಲು ಬಳ್ಳಾರಿ ಜಿಲ್ಲೆಗೆ ಬಿಡುಗಡೆ ಮಾಡಿದೆ.

ಆರ್ಥಿಕ ಇಲಾಖೆಯ ಆದೇಶದ ಸಂ: ಎಫ್‌ಡಿ 7 ಜೆಡ್ಬಿಎ 2003, ದಿನಾಂಕ 14-7-2005 ಮತ್ತು ಸರ್ಕಾರದ ಸುತ್ತೋಲೆ ಸಂ. ಆಇ 1 ಜಿಪಅ 07, ದಿನಾಂಕ 19-1-2007ರಲ್ಲಿನ ಸೂಚನೆಗಳನ್ವಯ ಈ ಕೆಳಕಂಡ ಲೆಕ್ಕಶೀರ್ಷಿಕೆಯಡಿ ಪೇಯಿಸ್ ರಸೀದಿಯ ಮೇಲೆ ಖಜಾನೆಯಿಂದ ಅನುದಾನ ಪಡೆದು ಕಾರ್ಯಕ್ರಮದ ಅನುಷ್ಠಾನಕ್ಕಾಗಿ ತೆರೆದಿರುವ ಬ್ಯಾಂಕ್ ಖಾತೆಗೆ ಜಮೆ ಮಾಡಿ ವೆಚ್ಚವನ್ನು ಭರಿಸತಕ್ಕದ್ದು.

2008-09ನೇ ಸಾಲಿನ ರಾಷ್ಟ್ರಿಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಲೆಕ್ಕಶೀರ್ಷಿಕೆ "2505 ಗ್ರಾಮೀಣ ಉದ್ಯೋಗ 02 ಗ್ರಾಮೀಣ ಉದ್ಯೋಗ ಖಾತರಿ ಯೋಜನೆ 101-ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾರ್ಯಕ್ರಮ 0-01 ಕರ್ನಾಟಕ ಗ್ರಾಮೀಣ ಉದ್ಯೋಗ ಭರವಸೆ ಯೋಜನೆ -059 ಇತರೆ ಖರ್ಚು (ಯೋಜನೆ)" (2505-02-101-0-01-059).

ಈಗ ಬಿಡುಗಡೆ ಮಾಡುವ ಅನುದಾನವನ್ನು ಸಾಮಗ್ರಿ ಘಟಕಕ್ಕೆ ಮಾತ್ರ ಬಳಸಿಕೊಳ್ಳತಕ್ಕದ್ದು. ಪಂಚಾಯತ್ ರಾಜ್ ಸಂಸ್ಥೆಗೆ ಸಂಬಂಧಪಟ್ಟ ಅಧಿಕಾರಿಗಳು ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗೆ ಸಂಬಂಧಿಸಿದಂತೆ ಅಧಿನಿಯಮದ ಪ್ರಕರಣಗಳು, ಕೇಂದ್ರ ಸರ್ಕಾರದ ನಿರ್ವಹಣೆಯ ಮಾರ್ಗಸೂಚಿಗಳು, ಸುತ್ತೋಲೆಗಳು, ಆದೇಶಗಳು ಹಾಗೂ ರಾಜ್ಯ ಸರ್ಕಾರವು ದಿನಾಂಕ 1-2-2007ರಂದು ಅಧಿಸೂಚಿಸಿರುವ, ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ-ಕರ್ನಾಟಕ ಇದರ ಮಾರ್ಗಸೂಚಿಗಳ ರೀತ್ಯಾ ಕ್ರಮ ತೆಗೆದುಕೊಳ್ಳತಕ್ಕದ್ದು. ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸಂಬಂಧಿಸಿದ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಉಸ್ತುವಾರಿ, ಅನುಷ್ಠಾನ ಮತ್ತು ಜಾಗೃತಿ ಇವುಗಳನ್ನು ಚಲಾಯಿಸುವ ಸಂಪೂರ್ಣ ಜವಾಬ್ದಾರಿ ಅವರುಗಳದಾಗಿರುತ್ತದೆ.

ಸರ್ಕಾರದ ಆದೇಶವನ್ನು ಈ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಗ್ರಾಅಪ 530 ಐಎಫ್ಎಸ್ 2008, ದಿನಾಂಕ 23-12-2008ರಲ್ಲಿ ಸಹಮತಿಸಿದಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಡಾ: ಪಿ.ಸಿ. ಜಾಫರ್
ನಿರ್ದೇಶಕರು, ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ANNEXURE TO G.O. No. RDP 121 NRE 2008, BANGALORE, DATED 27-12-2008
Statement showing the releases of IInd installment of state share of funds under NREGA during 2008-09

(Rs. In lakhs)

Sl. No.	District	Central share directly to ZP		State share proposed for release as per Column No.4	Funds being released in this Order
		Date	Amount		
1	2	3	4	5	6
1	Bellary	1-12-2008	398.86	39.886	39.886

Dr. P.C. JAFFER
P.R. 266
Director, National Rural Employment Guarantee Scheme
& E/o. Dy. Secretary to Government,
Rural Development & Panchayat Raj Department

ಸಹಕಾರ ಸಚಿವಾಲಯ

ತಿದ್ದುಪಡಿ

ಸಂಖ್ಯೆ: ಸಿಒ 12 ಸಿಎಂಎಲ್ 2009, ಬೆಂಗಳೂರು, ದಿನಾಂಕ: 2ನೇ ಫೆಬ್ರವರಿ 2009.

ಸರ್ಕಾರದ ಆದೇಶ ಸಂಖ್ಯೆ: ಸಿಒ 12 ಸಿಎಲ್ಎಂ 2009, ದಿನಾಂಕ 17-1-2009ರಲ್ಲಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 39ಎ (4) ಮತ್ತು 121ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 28ಎ(4), 28ಎ(5), 28ಬಿ(2), 29ಎಫ್(4) ಮತ್ತು 39ಎ(2) ರಿಂದ ಮಾರ್ಪಾಟು ಮಾಡಿ ದಿನಾಂಕ 31-3-2009ರೊಳಗೆ ಚುನಾವಣೆ ನಡೆಸಬೇಕಾದ ಸಹಕಾರ ಸಂಘಗಳಿಗೆ ಚುನಾವಣಾ ದಿನಾಂಕಗಳನ್ನು ನಿಗದಿಪಡಿಸಿದ್ದು, ಸದರಿ ಆದೇಶ ಭಾಗದಲ್ಲಿನ ಕ್ರಮಸಂಖ್ಯೆ 01ರಲ್ಲಿ ಪ್ರಾಥಮಿಕ ಮತ್ತು ಮಾಧ್ಯಮಿಕ ಸಹಕಾರ ಸಂಘಗಳ ಆಡಳಿತ ಸಮಿತಿಗಳಿಗೆ ಚುನಾವಣೆ ನಡೆಸಬೇಕಾದ ಅವಧಿಯನ್ನು "ದಿನಾಂಕ 16-3-2009 ರಿಂದ 20-3-2009 ರೊಳಗೆ" ಎಂದು ನಿಗದಿಪಡಿಸಿದ್ದು ಅದನ್ನು "ದಿನಾಂಕ 22-3-2009ರೊಳಗೆ" ಎಂದು ತಿದ್ದುಪಡಿ ಮಾಡಿದ್ದು ಅದರಂತೆ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಪಿ.ಆರ್.523
ಆರ್.ಎಸ್. ಹುಬ್ಬಾಚಾರಿ
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ

ಕಂದಾಯ ಸಚಿವಾಲಯ

ವಿಷಯ : ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮಕ್ಕೆ ಹುದ್ದೆಗಳನ್ನು ಸೃಜಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 388 ಎಲ್‌ಜಿಬಿ 2008, ದಿ: 29-8-2008.
2. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 388 ಎಲ್‌ಜಿಬಿ 2008, ದಿ: 8-9-2008.
3. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಇವರ ಪತ್ರ ಸಂಖ್ಯೆ: ವಿಜಿ (ಜಾದ) ಸಿಬ್ಬಂದಿ ಸಿಆರ್/07/08-09, ದಿ: 16-9-2008 ಮತ್ತು 19-12-2008.
4. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 518 ಎಲ್‌ಜಿಬಿ 2008, ದಿ: 22-1-2009.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ಸರ್ಕಾರದ ಆದೇಶ ದಿ: 29-8-2008ರಲ್ಲಿ ಬೆಂಗಳೂರು ನಗರ ಜಿಲ್ಲೆಯೂ ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸರ್ಕಾರಿ ಜಮೀನುಗಳನ್ನು ಸಂರಕ್ಷಿಸಲು, ಅವಶ್ಯವಿದ್ದಲ್ಲಿ ಅಭಿವೃದ್ಧಿ ಪಡಿಸಲು ಮತ್ತು ಅವುಗಳನ್ನು ಸ್ಪರ್ಧಾತ್ಮಕವಾಗಿ ಏಲೇ ಮಾಡಿ ಸಂಪನ್ಮೂಲಗಳನ್ನು ಸಂಗ್ರಹಿಸಲು ಹಾಗೂ ಹಂಚಿಕೆ ಮಾಡಲು ಕಂಪನೀಸ್ ಆಕ್ಟ್ ಅಡಿಯಲ್ಲಿ ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮವನ್ನು ಸ್ಥಾಪಿಸಲಾಗಿರುತ್ತದೆ. ಅಲ್ಲದೇ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಸರ್ಕಾರದ ಆದೇಶ ದಿ: 8-9-2008ರಲ್ಲಿ ಈ ನಿಗಮಕ್ಕೆ ನಿರ್ದೇಶಕರುಗಳನ್ನು ನೇಮಕ ಮಾಡಲಾಗಿರುತ್ತದೆ.

ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ಪತ್ರದಲ್ಲಿ ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮಕ್ಕೆ ಹುದ್ದೆಗಳನ್ನು ಸೃಜಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿನ ಸರ್ಕಾರದ ಆದೇಶ ದಿ: 22-1-2009ರಲ್ಲಿ ಈ ನಿಗಮಕ್ಕೆ ಹಲವು ಹುದ್ದೆಗಳನ್ನು ವಿಶೇಷ ಜಿಲ್ಲಾಧಿಕಾರಿಗಳು (ಜಾರಿದಳ) ಇಲ್ಲಿಂದ ಸ್ಥಳಾಂತರಿಸಲಾಗಿರುತ್ತದೆ.

ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮಕ್ಕೆ ಹಲವು ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 518 ಎಲ್‌ಜಿಪಿ 2008, ಬೆಂಗಳೂರು, ದಿನಾಂಕ: 23ನೇ ಜನವರಿ 2009.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮಕ್ಕೆ ಈ ಕೆಳಕಂಡ ಹುದ್ದೆಗಳನ್ನು ಸೃಜಿಸಲಾಗಿದೆ.

ಕ್ರ.ಸ.	ಪದನಾಮ (ವೇತನ ಶ್ರೇಣಿ)	ಸೃಜಿಸಲಾದ ಹುದ್ದೆಗಳ ಸಂಖ್ಯೆ	ಹುದ್ದೆಗೆ ಆಯ್ಕೆ ಮಾಡುವ ವಿಧಾನ
1	ವ್ಯವಸ್ಥಾಪಕ ನಿರ್ದೇಶಕರು (ರೂ. 37400-63700)	1	ಸೀನಿಯರ್ / ಸೂಪರ್ ಟೈಮ್ ಸ್ಕೇಲ್ ಐ.ಎ.ಎಸ್., ವೃಂದದಿಂದ
2	ಕಂಪನಿ ಕಾರ್ಯದರ್ಶಿ (ಸಂಚಿತ ವೇತನ ತಿಂಗಳಿಗೆ ರೂ. 20000/-ರಂತೆ)	1	ಔಟ್‌ಸೋರ್ಸ್ ಮೂಲಕ ಅಥವಾ ಗುತ್ತಿಗೆ ಆಧಾರದ ಮೇಲೆ
3	ಜನರಲ್ ಮ್ಯಾನೇಜರ್ (ರೂ. 20025-28275)	1	ಕೆ.ಎ.ಎಸ್., ಸೀನಿಯರ್ ಸ್ಕೇಲ್
4	ಮುಖ್ಯ ಲೆಕ್ಕಾಧಿಕಾರಿ (ರೂ. 20025-28275)	1	ರಾಜ್ಯ ಲೆಕ್ಕಪತ್ರ ಇಲಾಖೆಯಿಂದ
5	ಸಹಾಯಕ ಆಯುಕ್ತರು (ರೂ. 15200-25650)	1	ಕೆ.ಎ.ಎಸ್.
6	ತಹಶೀಲ್ದಾರ್ (ರೂ. 11400-21600)	2	ಕೆ.ಎ.ಎಸ್.
	ಒಟ್ಟು	7	

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಎಫ್‌ಡಿ 47 ವೆಚ್ಚ-7/09, ದಿ: 23-1-2009ರಲ್ಲಿ ನೀಡಿದ ಸಹಮತಿ ಅನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.410

ಇ. ಈಶ್ವರ ನಾಯಕ್

ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಭೂಮಂಜೂರಾತಿ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ವಿಷಯ : 2008-09ನೇ ಸಾಲಿನ ಶಾಸನಬದ್ಧ ಅನುದಾನದ ಮೂರನೇ ತ್ರೈಮಾಸಿಕ ಕಂತನ್ನು ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 129 ಗ್ರಾಪಂಕಾ 2002(3), ದಿನಾಂಕ 2-12-2003.

2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 234 ಗ್ರಾಪಂಅ 2007, ದಿನಾಂಕ 27-3-2008.

3. ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 363 ವೆಚ್ಚ-6/2008, ದಿನಾಂಕ 14-5-2008.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 168 ಗ್ರಾಪಂಅ 2008, ದಿನಾಂಕ 20-5-2008.
5. ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 112 ವೆಚ್ಚ-6/2008, ದಿನಾಂಕ 6-8-2008.
6. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 168 ಗ್ರಾಪಂಅ 2008, ದಿನಾಂಕ 8-8-2008.
7. ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 112 ವೆಚ್ಚ-6/2008, ದಿನಾಂಕ 2-12-2008.

ಪ್ರಸ್ತಾವನೆ :

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆಯಾಗುವ ಸರ್ಕಾರದ ಅನುದಾನವನ್ನು ರಾಜ್ಯ ಹುಜೂರು ಖಜಾನೆಯಿಂದ ಪೇಯೀಸ್ ರಸೀದಿ ಮೇಲೆ ಪಡೆದು ರಾಷ್ಟ್ರೀಕೃತ ಬ್ಯಾಂಕುಗಳ ಮುಖಾಂತರ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲು ಸರ್ಕಾರದ ಅಧೀನ ಕಾರ್ಯದರ್ಶಿ (ಜಿಪಂ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರಿಗೆ ಸರ್ಕಾರವು ಆದೇಶಿಸಿದೆ.

2008-09ನೇ ಸಾಲಿಗೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಶಾಸನಬದ್ಧ ಅನುದಾನವನ್ನು ಆಯವ್ಯಯ ಲೆಕ್ಕಶೀರ್ಷಿಕೆ 2515-00-198-1-07 (ಯೋಜನೆ) ಅಡಿ ಒಟ್ಟಾರೆ ರೂ. 34,219.61 ಲಕ್ಷಗಳನ್ನು ಒದಗಿಸಲಾಗಿದೆ. ಈ ಅನುದಾನದಿಂದ ಪ್ರತಿ ಗ್ರಾಮ ಪಂಚಾಯತಿಗೆ ವಾರ್ಷಿಕವಾಗಿ ತಲಾ ರೂ. 6.00 ಲಕ್ಷಗಳು ಲಭ್ಯವಾಗುತ್ತದೆ. ಈ ಸಾಲಿನ ಮೊದಲನೇ ತ್ರೈಮಾಸಿಕ ವೆಚ್ಚಕ್ಕಾಗಿ ಪ್ರಸ್ತಾಪಿತ ಲೆಕ್ಕಶೀರ್ಷಿಕೆಯಿಂದ ಒಟ್ಟು ರೂ. 8442.00 ಲಕ್ಷಗಳನ್ನು ಆರ್ಥಿಕ ಇಲಾಖೆಯು ಮೇಲೆ ಓದಲಾದ (3)ರಲ್ಲಿನ ಟಿಪ್ಪಣಿಯಲ್ಲಿ ಸಹಮತಿ ನೀಡಿದ್ದು, ಓದಲಾದ (4)ರಲ್ಲಿ ತಿಳಿಸಿರುವ ಸರ್ಕಾರದ ಆದೇಶದಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ಪ್ರತಿ ಕಂತಿಗೆ ರೂ. 1.50 ಲಕ್ಷಗಳಂತೆ ಒಟ್ಟು ರೂ. 8442.00 ಲಕ್ಷಗಳನ್ನು ಬಿಡುಗಡೆಗೊಳಿಸಿ, ಸಂಬಂಧಿಸಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮೂಲಕ ಗ್ರಾಮ ಪಂಚಾಯಿತಿಗಳಿಗೆ ವಿತರಿಸಲಾಗಿದೆ. ಓದಲಾದ (6)ರಲ್ಲಿ ತಿಳಿಸಿರುವ ಸರ್ಕಾರದ ಆದೇಶದಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ಪ್ರತಿ ಕಂತಿಗೆ ರೂ. 1.50 ಲಕ್ಷಗಳಂತೆ ಒಟ್ಟು ರೂ. 8442.00 ಲಕ್ಷಗಳನ್ನು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಿ, ಸಂಬಂಧಿಸಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮೂಲಕ ಗ್ರಾಮ ಪಂಚಾಯಿತಿಗಳಿಗೆ ವಿತರಿಸಲಾಗಿದೆ. ಓದಲಾದ (7)ರ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು 2008-09ನೇ ಸಾಲಿನ ಶಾಸನಬದ್ಧ ಅನುದಾನದ 3ನೇ ಕಂತಾಗಿ ರೂ. 8442.00 ಲಕ್ಷಗಳನ್ನು ಬಿಡುಗಡೆ ಮಾಡಲು ಸಹಮತಿಸಿರುತ್ತದೆ. ಸದರಿ ಅನುದಾನವನ್ನು ಪ್ರಸ್ತುತ ರಾಜ್ಯದಲ್ಲಿರುವ 5628 ಗ್ರಾಮ ಪಂಚಾಯಿತಿಗಳಿಗೆ ಮೇಲೆ ಓದಲಾದ (2)ರ ಸರ್ಕಾರದ ಆದೇಶದಂತೆ, ಶೇಕಡಾ 40ರಷ್ಟನ್ನು ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವೇತನ ಮತ್ತು ಶೇಕಡಾ 60ರಷ್ಟನ್ನು ಗ್ರಾಮ ಪಂಚಾಯಿತಿಗಳ ಅಕ್ಟೋಬರ್ 2008 ರಿಂದ ಡಿಸೆಂಬರ್ 2008ರ ಅವಧಿಯ ವಿದ್ಯುತ್ ಬಿಲ್ ಪಾವತಿಸಲು ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮುಖಾಂತರ ಬಿಡುಗಡೆ ಮಾಡಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 168 ಗ್ರಾಪಂಅ 2008, ಬೆಂಗಳೂರು, ದಿನಾಂಕ: 11ನೇ ಡಿಸೆಂಬರ್ 2008.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರತಿ ಗ್ರಾಮ ಪಂಚಾಯಿತಿಗೆ 2008-09ನೇ ಸಾಲಿನ ಶಾಸನಬದ್ಧ ಅನುದಾನದ ಮೂರನೇ ತ್ರೈಮಾಸಿಕ ಕಂತಿನ ಮೊತ್ತ ರೂ. 8442.00 ಲಕ್ಷಗಳನ್ನು (ಎಂಭತ್ತನಾಲ್ಕು ಕೋಟಿ ನಲವತ್ತೆರಡು ಲಕ್ಷ ರೂಪಾಯಿಗಳು ಮಾತ್ರ) 2008-09ನೇ ಸಾಲಿನ ಲೆಕ್ಕಶೀರ್ಷಿಕೆ 2515-00-198-1-07 (ಯೋಜನೆ) ಅಡಿಯಲ್ಲಿ ಬಿಡುಗಡೆ ಮಾಡಿ ಆದೇಶಿಸಿದೆ. ಈ ಅನುದಾನದ ಮೊತ್ತವನ್ನು ಪೇಯೀಸ್ ರಸೀದಿಯ ಮೇಲೆ ಪಡೆದು ಸಿಂಡಿಕೇಟ್ ಬ್ಯಾಂಕ್, ಬೆಂಗಳೂರು ನಗರ ನೀರು ಸರಬರಾಜು ಮಂಡಳಿ ಶಾಖೆ, ಮೈಸೂರು ಬ್ಯಾಂಕ್ ವೃತ್ತ, ಬೆಂಗಳೂರು, ಇಲ್ಲಿ ತೆರೆದಿರುವ ಖಾತೆಯ ಮುಖಾಂತರ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ತಲಾ ರೂ. 1.50 ಲಕ್ಷದಂತೆ ಮೂರನೇ ತ್ರೈಮಾಸಿಕ ಕಂತಿನ ಅನುದಾನವನ್ನು ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿನ ಷರತ್ತುಗಳನ್ನು ಪಾಲಿಸುವ ನಿಬಂಧನೆಗಳಿಗೊಳಪಟ್ಟು, ಶೇಕಡಾ 40ರಷ್ಟನ್ನು ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವೇತನ ಮತ್ತು ಶೇಕಡಾ 60ರಷ್ಟನ್ನು ಗ್ರಾಮ ಪಂಚಾಯಿತಿಗಳ ಅಕ್ಟೋಬರ್ 2008 ರಿಂದ ಡಿಸೆಂಬರ್ 2008ರ ಅವಧಿಯ ವಿದ್ಯುತ್ ಬಿಲ್ ಪಾವತಿಸಲು ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮುಖಾಂತರ ಬಿಡುಗಡೆ ಮಾಡಿ ಆದೇಶಿಸಿದೆ.

ಈ ಆದೇಶವನ್ನು ಟಿಪ್ಪಣಿ ಸಂಖ್ಯೆ: ಆಇ 112 ವೆಚ್ಚ-6/2008, ದಿನಾಂಕ 2-12-2008ರಲ್ಲಿ ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.317

ಸ್ವರ್ಣಲತ ಎಂ. ಭಂಡಾರೆ

ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ಗುತ್ತಿಗೆ ಉಪನ್ಯಾಸಕರ ಸೇವೆಯನ್ನು ಮುಂದುವರೆಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 387 ಪಿಟಿಡಿ 2007, ದಿನಾಂಕ 19-2-2008.

2. ಸರ್ಕಾರದ ಆದೇಶ ಸಂಖ್ಯೆ: ಆಕುಕ 177 ಪಿಟಿಡಿ 2007, ದಿನಾಂಕ 7-9-2007.

3. ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಆಯುಷ್/91/ಸಿಬ್ಬಂದಿ(1)/2008-09, ದಿನಾಂಕ 2-12-2008.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ, ಹೋಮಿಯೋಪತಿ, ಯುನಾನಿ ಮತ್ತು ಪ್ರಕೃತಿ ಚಿಕಿತ್ಸೆ ಹಾಗೂ ಯೋಗ ಮಹಾವಿದ್ಯಾಲಯ, ಬೆಂಗಳೂರು ಮತ್ತು ಮೈಸೂರು ಇಲ್ಲಿ ಖಾಲಿ ಇರುವ ಉಪನ್ಯಾಸಕರುಗಳ (ಹೋಮಿಯೋಪತಿ), (ಯುನಾನಿ ಮತ್ತು ಪ್ರಕೃತಿ ಚಿಕಿತ್ಸೆ) (ಹಾಗೂ ಯೋಗ) ಹುದ್ದೆಗಳಿಗೆ ರೂ.7990/-ರ ಮಾಸಿಕ ಸಂಚಿತ ವೇತನವನ್ನು ನಿಗದಿಪಡಿಸಿ, 11 ತಿಂಗಳ ಅವಧಿಗೆ ಕೆಲವು ಷರತ್ತು ಮತ್ತು ನಿಬಂಧನೆಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಸರ್ಕಾರದ ಆದೇಶದಲ್ಲಿ, ಆಯುಷ್ ಇಲಾಖೆಯ ಗುತ್ತಿಗೆ ಉಪನ್ಯಾಸಕರ ಸಂಚಿತ ವೇತನವನ್ನು ರೂ. 7990/- ರಿಂದ ರೂ. 13,000/-ಕ್ಕೆ ಹೆಚ್ಚಿಸಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ನಿರ್ದೇಶಕರ ಪತ್ರದಲ್ಲಿ, ಪ್ರಾಚಾರ್ಯರು, ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು ರವರು ಈ ಹಿಂದೆ ನೇಮಕಗೊಂಡಿದ್ದ ಗುತ್ತಿಗೆ ಉಪನ್ಯಾಸಕರುಗಳ ಅವಧಿಯು ಜನವರಿ-2009ಕ್ಕೆ ಮುಕ್ತಾಯವಾಗುವುದರಿಂದ, ಪುನಃ 11 ತಿಂಗಳ ಅವಧಿಗೆ ಮುಂದುವರೆಸುವಂತೆ ಕೋರಿರುತ್ತಾರೆ. ಅದರಂತೆ, ಕೆಳಕಂಡ ಗುತ್ತಿಗೆ ಉಪನ್ಯಾಸಕರುಗಳ ಗುತ್ತಿಗೆ ಅವಧಿಯನ್ನು ಜನವರಿ-2009ರ ನಂತರ (ಅಂದರೆ, ಅವರ ಗುತ್ತಿಗೆ ಅವಧಿಯು ಮುಗಿದ ದಿನಾಂಕದ ನಂತರ) ಪುನಃ 11 ತಿಂಗಳ ಅವಧಿಗೆ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಭರ್ತಿ ಮಾಡುವವರೆಗೆ ಅಥವಾ ನಿಯಮಾನುಸಾರ ಹುದ್ದೆಗಳನ್ನು ಭರ್ತಿ ಮಾಡುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸರ್ಕಾರದ ಅಧಿಸೂಚನೆ ದಿನಾಂಕ 13-3-2007ರ ಅನುಬಂಧದಲ್ಲಿ ನಮೂದಿಸಿರುವ ಷರತ್ತು ಮತ್ತು ನಿಬಂಧನೆಗೊಳಪಟ್ಟು ಮುಂದುವರೆಸುವಂತೆ ಕೋರಿರುತ್ತಾರೆ.

ಕ್ರ. ಸಂ.	ಹೆಸರು	11 ತಿಂಗಳು ಗುತ್ತಿಗೆ ಮುಕ್ತಾಯಗೊಂಡ ದಿನಾಂಕ
ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು		
1	ಡಾ: ಜ್ಯೋತಿ ಅ. ಮೂಲ ಭಾರತಿ	28-1-2009
2	ಡಾ: ವಿಜಯಕೃಷ್ಣ ವಿ.	24-1-2009
3	ಡಾ: ವಿಜಯಲಕ್ಷ್ಮಿ ಎಂ. ಅಂಗಡಿ	24-1-2009
4	ಡಾ: ಶೋಭಾ ಬಿ. ಮಾಲಿ ಪಾಟೀಲ್	27-1-2009
5	ಡಾ: ಜ್ಯೋತಿರ್ಮಯಿ ಬಿ. ಜಾನ್ ಬೋ	27-1-2009
6	ಡಾ: ಅನುಸೂಯ	28-1-2009
7	ಡಾ: ಪ್ರತಿಮಾ ಎಸ್. ನಾಗನೂರ	27-1-2009
8	ಡಾ: ಶರಣಪ್ಪ ವೀರಪ್ಪ ಹಕ್ಕಲದಡ್ಡಿ	22-1-2009
9	ಡಾ: ವೀರಭದ್ರಪ್ಪ ಸಿ	29-1-2009
10	ಡಾ: ಮುದಸಿರ್ ಮುಲ್ಲಾ	29-1-2009

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 394 ಪಿಟಿಡಿ 2008, ಬೆಂಗಳೂರು, ದಿನಾಂಕ: 13ನೇ ಜನವರಿ 2009.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು ಇಲ್ಲಿ ಕೆಲಸ ನಿರ್ವಹಿಸುತ್ತಿರುವ ಈ ಕೆಳಕಂಡ ಗುತ್ತಿಗೆ ಉಪನ್ಯಾಸಕರುಗಳು 11 ತಿಂಗಳ ಅವಧಿಯ ಸೇವೆಯನ್ನು ಪೂರ್ಣಗೊಳಿಸಿದ ನಂತರ ಎರಡು ದಿನ ಮೊಟಕುಗೊಳಿಸುವ ಷರತ್ತಿಗೆ ಒಳಪಟ್ಟು (ಹಿಂಬರಹ

ನೀಡುವುದು) ನಂತರ ಅವರುಗಳ ಸೇವೆಯನ್ನು ಮುಂದಿನ ದಿನಾಂಕದಿಂದ ಪುನಃ 11 ತಿಂಗಳ ಅವಧಿಗೆ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಭರ್ತಿ ಮಾಡುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸರ್ಕಾರದ ಆದೇಶ ಸಂಖ್ಯೆ: ಆಕುಕ 23 ಪಿಟಿಡಿ 2007, ದಿನಾಂಕ 13-3-2007ರಲ್ಲಿ ನಮೂದಿಸಿರುವ ಷರತ್ತು ಮತ್ತು ನಿಬಂಧನೆಗೊಳಪಟ್ಟು 2009-10ನೇ ಸಾಲಿನ ಆಯವ್ಯಯದಲ್ಲಿ ಅನುದಾನವನ್ನು ಒದಗಿಸಿಕೊಳ್ಳುವ ಷರತ್ತಿಗೊಳಪಟ್ಟು ಮುಂದುವರೆಸಲಾಗಿದೆ.

ಕ್ರ. ಸಂ.	ಹೆಸರು	11 ತಿಂಗಳು ಗುತ್ತಿಗೆ ಮುಕ್ತಾಯಗೊಂಡ ದಿನಾಂಕ
	ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು	
1	ಡಾ: ಜ್ಯೋತಿ ಅ. ಮೂಲ ಭಾರತಿ	28-1-2009
2	ಡಾ: ವಿಜಯಕೃಷ್ಣ ವಿ.	24-1-2009
3	ಡಾ: ವಿಜಯಲಕ್ಷ್ಮಿ ಎಂ. ಅಂಗಡಿ	24-1-2009
4	ಡಾ: ಶೋಭಾ ಬಿ. ಮಾಲಿ ಪಾಟೀಲ್	27-1-2009
5	ಡಾ: ಜ್ಯೋತಿರ್ಮಯಿ ಬಿ. ಜಾನ್ ಬೋ	27-1-2009
6	ಡಾ: ಅನುಸೂಯ	28-1-2009
7	ಡಾ: ಪ್ರತಿಮಾ ಎಸ್. ನಾಗನೂರ	27-1-2009
8	ಡಾ: ಶರಣಪ್ಪ ವೀರಪ್ಪ ಹಕ್ಕಲದಡ್ಡಿ	22-1-2009
9	ಡಾ: ವೀರಭದ್ರಪ್ಪ ಸಿ	29-1-2009
10	ಡಾ: ಮುದಸಿರ್ ಮುಲ್ಲಾ	29-1-2009

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.418 **ಎನ್. ಮಹಾಲಕ್ಷ್ಮಮ್ಮ**

ಸರ್ಕಾರದ ಅಧೀನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)

ವಿಷಯ : ಡಾ: ಎನ್. ಆಶಾರಾಣಿ, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ರಾಂಪುರ, ವಿದ್ಯುತ್ ಕಾಲೋನಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರನ್ನು ಸೇವೆಯಿಂದ ವಿಮೋಚನೆಗೊಳಿಸುವ ಬಗ್ಗೆ.

ಓದಲಾಗಿದೆ: ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರ ಪತ್ರ ಸಂ: ಡಿಪಿಜಿ (2) 221/2008-09, ದಿನಾಂಕ 26-12-2008.

ಪ್ರಸ್ತಾವನೆ :

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರು ಮೇಲೆ ಓದಲಾದ ಪತ್ರದಲ್ಲಿ ಡಾ: ಎನ್. ಆಶಾರಾಣಿ, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ರಾಂಪುರ, ವಿದ್ಯುತ್ ಕಾಲೋನಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರು ದಿನಾಂಕ 7-7-2007ರಂದು ಸರ್ಕಾರಿ ಸೇವೆಗೆ ಸೇರಿದ್ದು, ದಿನಾಂಕ 4-8-2008 ರಿಂದ 13-8-2008ರ ವರೆಗೆ ಪರಿವರ್ತಿತ ರಜೆಯನ್ನು ಬಳಸಿಕೊಂಡು ರಜೆ ಮುಗಿದ ನಂತರ ಕರ್ತವ್ಯಕ್ಕೆ ಹಾಜರಾಗದೆ ದಿನಾಂಕ 13-8-2008ರಿಂದ ಅನಧಿಕೃತ ಗೈರುಹಾಜರಾಗಿ, ಇಲಾಖೆಯ ಅನುಮತಿ ಪಡೆಯದೇ ಖಾಸಗಿಯಾಗಿ ಸ್ನಾತಕೋತ್ತರ ವ್ಯಾಸಂಗಕ್ಕೆ ತೆರಳಿರುತ್ತಾರೆ. ಸದರಿ ವೈದ್ಯರು ಖಾಯಂ ಪೂರ್ವ ಸೇವಾ ಅವಧಿಯಲ್ಲಿ ಅನಧಿಕೃತ ಗೈರುಹಾಜರಾಗಿ ಕರ್ತವ್ಯಚ್ಯುತಿ ಎಸಗಿರುವುದರಿಂದ ಪ್ರೊಬೇಷನರಿ ನಿಯಮಗಳ ಪ್ರಕಾರ ಸೇವೆಯಿಂದ ವಿಮೋಚನೆಗೊಳಿಸುವಂತೆ ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಆಕುಕ 19 ಹೆಚ್‌ಎಸ್‌ಹೆಚ್ 2009, ಬೆಂಗಳೂರು, ದಿನಾಂಕ: 4ನೇ ಫೆಬ್ರವರಿ 2009.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಡಾ: ಎನ್. ಆಶಾರಾಣಿ, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ರಾಂಪುರ, ವಿದ್ಯುತ್ ಕಾಲೋನಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ, ಇವರು ದಿನಾಂಕ 13-8-2008 ರಿಂದ ಖಾಯಂ ಪೂರ್ವ ಸೇವಾವಧಿಯಲ್ಲಿ ಅನಧಿಕೃತ ಗೈರುಹಾಜರಾಗಿ ಕರ್ತವ್ಯಚ್ಯುತಿ

ಎಸಗಿರುವುದರಿಂದ' ಕರ್ನಾಟಕ ನಾಗರೀಕ ಸೇವಾ (ಖಾಯಂಪೂರ್ವ) ನಿಯಮಾವಳಿ 1977ರ ನಿಯಮ 6ರ ಅಡಿಯಲ್ಲಿ ದಿನಾಂಕ 13-8-2008 ರಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ವಿಮೋಚನೆಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.611

ಐ. ಹೇಮನಾಥ್

ಸರ್ಕಾರದ ಅಧೀನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

(ಸೇವೆಗಳು-1)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಗೌರವ ಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ Law Clerks-cum-Research Assistants ಹುದ್ದೆಗಳನ್ನು ಮುಂದುವರೆಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 29 ಸೇಉಸ್ವಾ 2006, ದಿನಾಂಕ 12-4-2006.
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 84 ಸೇಉಸ್ವಾ 2006, ದಿನಾಂಕ 25-1-2007.
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 9 ಸೇಉಸ್ವಾ 2008, ದಿನಾಂಕ 5-2-2008.
4. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ ಅವರ ಪತ್ರ ಸಂಖ್ಯೆ HCE/623/2006 ದಿನಾಂಕ 10-12-2008.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ 12-4-2006ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯಕ್ಕೆ ಕಾನೂನು ಪದವೀಧರರನ್ನು ರೂ. 6000-00ಗಳ ಮಾಸಿಕ ಗೌರವ ಧನದ ಆಧಾರದ ಮೇಲೆ Law Clerks-cum-Research Assistantsಗಳಾಗಿ 1 ವರ್ಷದ ಅವಧಿಗೆ ನೇಮಿಸಿಕೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿತ್ತು. ಆನಂತರ ಮೇಲೆ (2)ರಲ್ಲಿ ಓದಲಾದ ದಿನಾಂಕ 25-1-2007ರ ಸರ್ಕಾರಿ ಆದೇಶದಲ್ಲಿ ಸದರಿ ಗೌರವ ಧನವನ್ನು ರೂ. 10,000-00ಗಳಿಗೆ ಹೆಚ್ಚಿಸಲಾಗಿತ್ತು. ಸದರಿ ಹುದ್ದೆಯನ್ನು ಮೇಲೆ (3)ರಲ್ಲಿ ಓದಲಾದ ದಿನಾಂಕ 5-2-2008ರ ಸರ್ಕಾರಿ ಆದೇಶದಲ್ಲಿ ದಿನಾಂಕ 1-2-2008ರಿಂದ 1 ವರ್ಷದ ಅವಧಿಗೆ ಮುಂದುವರೆಸಲಾಗಿತ್ತು. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಅವರು ಮೇಲೆ (4)ರಲ್ಲಿ ಓದಲಾದ ದಿನಾಂಕ 10-12-2008ರ ಪತ್ರದಲ್ಲಿ ಸದರಿ ಹುದ್ದೆಗಳನ್ನು ಮುಂದುವರೆಸಲು ಕೋರಿದ್ದಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 2 ಸೇಉಸ್ವಾ 2009, ಬೆಂಗಳೂರು, ದಿನಾಂಕ: 9ನೇ ಫೆಬ್ರವರಿ 2009.

ಕರ್ನಾಟಕ ಉಚ್ಚ ನ್ಯಾಯಾಲಯದ Law Clerks-cum-Research Assistantsಗಳ 41 ಹುದ್ದೆಗಳನ್ನು ದಿನಾಂಕ 1-2-2009 ರಿಂದ 31-1-2010ರವರೆಗೆ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 120/ವೆಚ್ಚ-8/2009, ದಿನಾಂಕ 29-1-2009ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.612

ಎಂ.ಎಸ್. ಶಿವರಾಮ್

ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸು ಇಲಾಖೆ (ಸೇವೆಗಳು-3)

ವಿಷಯ : ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿಯರಿಗೆ ಉಚಿತ ಬಸ್ ಪ್ರಯಾಣದ ಕೂಪನ್‌ಗಳನ್ನು ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 1242 ಪಿಎಫ್ಎಸ್ 87, ದಿನಾಂಕ 3-11-1989.
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 52 ಪಿಎಫ್‌ಜಿ 94, ದಿನಾಂಕ 31-10-1995 ಮತ್ತು ದಿನಾಂಕ 7-2-1996.

ಪ್ರಸ್ತಾವನೆ :

ಉಲ್ಲೇಖ (1) ಮತ್ತು (2)ರಲ್ಲಿ ಓದಲಾಗಿರುವ ಸರ್ಕಾರದ ಆದೇಶಗಳಲ್ಲಿ ಭಾರತ ದೇಶದ ಸ್ವಾತಂತ್ರ್ಯಕ್ಕಾಗಿ ಸ್ಮರಣೀಯ ಸೇವೆ ಸಲ್ಲಿಸಿದ ಹಾಗೂ ತ್ಯಾಗ ಮಾಡಿದ ಸ್ವಾತಂತ್ರ್ಯ ಸೈನಿಕ ಸಮ್ಮಾನ ಗೌರವಧನ ಪಡೆಯುತ್ತಿರುವ ಸ್ವಾತಂತ್ರ್ಯ ಹೋರಾಟಗಾರರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರಯಾಣಿಸಲು ಉಚಿತ ಬಸ್‌ಪಾಸ್ ಸೌಲಭ್ಯವನ್ನು ಕಲ್ಪಿಸಿ ಆದೇಶ ಹೊರಡಿಸಿದೆ.

ಸ್ವಾತಂತ್ರ್ಯ ಹೋರಾಟಗಾರರ ಅನೇಕ ಸಂಘ ಸಂಸ್ಥೆಗಳು/ಸಂಘಟನೆಗಳು ಹಾಗೂ ರಾಜ್ಯದ ಹಲವು ಸ್ವಾತಂತ್ರ್ಯ ಹೋರಾಟಗಾರರು, ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿಯವರಿಗೆ ಉಚಿತ ಬಸ್‌ಪಾಸ್ ಸೌಲಭ್ಯವನ್ನು ಒದಗಿಸುವಂತೆ ಕೋರಿಕೆಯನ್ನು ಸಲ್ಲಿಸಿರುತ್ತಾರೆ. ಆದ್ದರಿಂದ ಸ್ವಾತಂತ್ರ್ಯ ಹೋರಾಟಗಾರರ ಕೋರಿಕೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 30 ಪಿಎಫ್‌ಜಿ 2006 (ಭಾಗ), ಬೆಂಗಳೂರು, ದಿನಾಂಕ: 4ನೇ ಫೆಬ್ರವರಿ 2009

ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿಯವರಿಗೆ ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಕರ್ನಾಟಕ ರಾಜ್ಯದಲ್ಲಿ ಮಾತ್ರ ಪ್ರಯಾಣಿಸಲು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಪ್ರತಿ ವರ್ಷಕ್ಕೆ ರೂ. 2000/- (ಎರಡು ಸಾವಿರ ರೂಪಾಯಿಗಳು) ಮೌಲ್ಯದ ಉಚಿತ ಬಸ್ ಪ್ರಯಾಣದ ಕೂಪನ್‌ಗಳನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದ ವಿತರಿಸಲು ಆದೇಶಿಸಿದೆ.

1. ಸಾರಿಗೆ ಸಂಸ್ಥೆಯ ಉಚಿತ ಬಸ್ ಪ್ರಯಾಣದ ಕೂಪನ್‌ಗಳನ್ನು ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿಯರು ಪ್ರಯಾಣಿಸಿದಾಗ ಮಾತ್ರ ಉಪಯೋಗಿಸುವುದನ್ನು ನಿಗಾವಹಿಸುವುದು ಹಾಗೂ ದುರುಪಯೋಗ ಆಗದಂತೆ ನೋಡಿಕೊಳ್ಳಲು ಅವರ ಗುರ್ತಿನ ಚೀಟಿ ಹಾಗೂ ಅಗತ್ಯ ದಾಖಲೆಗಳನ್ನು ಹಾಜರುಪಡಿಸಲು ಸೂಚನೆ ನೀಡುವುದು.
2. ಈ ಕೂಪನ್‌ಗಳನ್ನು ಪ್ರತಿ ವರ್ಷವು ನವೀಕರಿಸಬೇಕು.
3. ಈ ಕೂಪನ್‌ಗಳನ್ನು ಹೊಂದಿರುವ ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿಯರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಗರ ಸಾರಿಗೆ ಸೌಲಭ್ಯ ಎಲ್ಲೆಲ್ಲಿ ಇದೆಯೋ ಅಲ್ಲಿ ನಗರ ಸಾರಿಗೆ ಬಸ್‌ಗಳಲ್ಲೂ ಪ್ರಯಾಣಿಸಬಹುದು.
4. ಉಚಿತ ಬಸ್ ಪ್ರಯಾಣದ ಕೂಪನ್ ಸೌಲಭ್ಯ ಹೊಂದಿರುವ ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿಯರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವೇಗಧೂತ ಹಾಗೂ ಸಾಮಾನ್ಯ ಬಸ್‌ಗಳಲ್ಲಿ ಪ್ರಯಾಣ ಮಾಡಲು ಮಾತ್ರ ಅವಕಾಶ ಕಲ್ಪಿಸಲಾಗಿದೆ. ಸುವಿಹಾರಿ ಮತ್ತು ಅರೆ ಸುವಿಹಾರಿ ಬಸ್‌ಗಳಲ್ಲಿ ಪ್ರಯಾಣಿಸಲು ಅವಕಾಶವಿಲ್ಲ.
5. ಮುಂಗಡವಾಗಿ ಸ್ಥಳ ಕಾಯ್ದಿರಿಸುವ ಸೌಲಭ್ಯವನ್ನು ಶುಲ್ಕವಿಲ್ಲದೆ ನೀಡಬಹುದು.
6. ಉಚಿತ ಬಸ್ ಪ್ರಯಾಣದ ಕೂಪನ್‌ಗಳನ್ನು ಪಡೆಯಲಿಚ್ಛಿಸುವ ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿಯರು ಈ ಕೆಳಕಂಡ ದಾಖಲೆ/ಮಾಹಿತಿಗಳೊಂದಿಗೆ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಅರ್ಜಿ ಸಲ್ಲಿಸಬೇಕು.
   ಅ) ಅವರಿಗೆ ಸ್ವಾತಂತ್ರ್ಯ ಸೈನಿಕ ಸನ್ಮಾನ ಕುಟುಂಬ ಗೌರವಧನ ಮಂಜೂರಾದ ಸರ್ಕಾರಿ ಆದೇಶ.
   ಆ) ಕರ್ನಾಟಕ ಮಹಾಲೇಖಪಾಲರು ನೀಡಿರುವ ಗೌರವಧನ ಬಟವಾಡೆ ಆದೇಶ (ಪಿ.ಪಿ.ಓ.)
   ಇ) ಪತ್ರಾಂಕಿತ ಅಧಿಕಾರಿಗಳು ಧೃಢೀಕರಿಸಿದ ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿಯರ ಇತ್ತೀಚಿನ ನಾಲ್ಕು ಭಾವಚಿತ್ರಗಳು.
   ಈ) ಅರ್ಜಿದಾರರು ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿ ಎಂದು ಧೃಢೀಕರಿಸಿಕೊಳ್ಳಲು ಜಿಲ್ಲಾಧಿಕಾರಿಗಳು ನಿಗಧಿಪಡಿಸುವ ಇನ್ನಿತರ ಮಾಹಿತಿ/ದಾಖಲೆಗಳು.

ಜಿಲ್ಲಾಧಿಕಾರಿಗಳು ಮೇಲ್ಕಂಡ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ ಅವರಿಗೆ ಅವಶ್ಯಕವೆಂದು ಕಂಡುಬಂದಂತಹ ವಿಚಾರಣೆಗಳನ್ನು ಮಾಡಿ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿಯರಿಗೆ ಉಚಿತ ಬಸ್ ಪ್ರಯಾಣದ ಕೂಪನ್‌ಗಳನ್ನು ನೀಡಲು ಶಿಫಾರಸ್ಸು ಮಾಡುವುದು.

ಸ್ವಾತಂತ್ರ್ಯ ಹೋರಾಟಗಾರರ ಪತ್ನಿ/ವಿಧವಾ ಪತ್ನಿಯವರಿಗೆ ಉಚಿತ ಬಸ್ ಪ್ರಯಾಣದ ಕೂಪನ್‌ಗಳನ್ನು ನೀಡಲು ಆಗುವ ವೆಚ್ಚವನ್ನು ಲೆಕ್ಕಶೀರ್ಷಿಕೆ 3055-00-800-0-11 ಸ್ವಾತಂತ್ರ್ಯ ಹೋರಾಟಗಾರರ ವಿಧವಾ ಪತ್ನಿಯವರಿಗೆ ಉಚಿತ ಬಸ್ ಪಾಸ್ ನೀಡುವ ವೆಚ್ಚ (ಹೊಸ ಲೆಕ್ಕ ಶೀರ್ಷಿಕೆ) ಅಡಿಯಲ್ಲಿ ಪೂರಕ ಅಂದಾಜು 2ನೇ ಕಂತಿನಲ್ಲಿ ಒದಗಿಸಿರುವ ರೂ. 1.20 ಕೋಟಿಗಳ ಹೆಚ್ಚುವರಿ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅಸಧಿಕೃತ ಟಿಪ್ಪಣಿ ಸಂಖ್ಯೆ: ಆಇ 1078 ವೆಚ್ಚ-5/2008, ದಿನಾಂಕ 30-10-2008ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.613

ಎಲ್.ಎಸ್. ಚಂದ್ರಶೇಖರರಾವ್

ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸು ಇಲಾಖೆ (ರಾಜಕೀಯ ವಿಶ್ರಾಂತಿ ವೇತನ)

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ : ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರ ವಿದ್ಯಾ ಮಂಡಳಿ - ಶ್ರೇಷ್ಠ ವಿಜ್ಞಾನಿಗಳಿಗೆ ಮತ್ತು ಇಂಜಿನಿಯರುಗಳಿಗೆ ರಾಜ್ಯ ಪ್ರಶಸ್ತಿ ಆಯ್ಕೆ ಸಮಿತಿಯ ಪುನರ್ ರಚನೆ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ವಿಯಇ 67 ವಿತ್ರಮ 2004, ದಿನಾಂಕ 30-5-2005.
2. ಸರ್ಕಾರದ ಆದೇಶ ಸಂಖ್ಯೆ: ವಿಯಇ 166 ವಿತ್ರಮ 2007, ದಿನಾಂಕ 19-12-2007.
3. ಸರ್ಕಾರದ ಆದೇಶ ಸಂಖ್ಯೆ: ವಿಯಇ 114 ವಿತ್ರಮ 2007, ದಿನಾಂಕ 1-8-2007.
4. ಕಾರ್ಯದರ್ಶಿ, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರ ವಿದ್ಯಾ ಮಂಡಳಿ ಇವರ ಪತ್ರ ಸಂ: 6.1.11/ ವೈ.ಎಸ್/770, ದಿನಾಂಕ 15-1-2009.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮಾಂಕ (1) ಮತ್ತು (2) ರಲ್ಲಿನ ಸರ್ಕಾರದ ಆದೇಶದಲ್ಲಿ ಪ್ರೊ. ಸಿ.ಎನ್.ಆರ್. ರಾವ್, ಅಧ್ಯಕ್ಷರು, ಮಾನ್ಯ ಪ್ರಧಾನ ಮಂತ್ರಿಗಳ ವಿಜ್ಞಾನ ಸಲಹಾ ಪರಿಷತ್ತು, ಭಾರತ ಸರ್ಕಾರ, ನ್ಯಾಷನಲ್ ರೀಸರ್ಚ್ ಪ್ರೊಫೆಸರ್ ಮತ್ತು ಗೌ. ಅಧ್ಯಕ್ಷರು, ಜವಹರಲಾಲ್ ನೆಹರು ವಿಜ್ಞಾನ ಸಂಶೋಧನಾ ಕೇಂದ್ರ, ಜಕ್ಕೂರು ಅಂಚೆ, ಬೆಂಗಳೂರು-560064 ರವರನ್ನು ಶ್ರೇಷ್ಠ ವಿಜ್ಞಾನಿಗಳಿಗೆ ಮತ್ತು ಇಂಜಿನಿಯರುಗಳಿಗೆ ರಾಜ್ಯ ಪ್ರಶಸ್ತಿ ಆಯ್ಕೆ ಸಮಿತಿಗೆ ಅಧ್ಯಕ್ಷರನ್ನಾಗಿ ನೇಮಕಾತಿ ಮಾಡಿ ಎಂಟು ಜನ ಸದಸ್ಯರನ್ನೊಳಗೊಂಡಂತೆ ಆಯ್ಕೆ ಸಮಿತಿಯನ್ನು ಪುನರ್ ರಚಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3)ರಲ್ಲಿನ ಸರ್ಕಾರಿ ಆದೇಶದಲ್ಲಿ 2006-07ನೇ ಸಾಲಿನ ಪ್ರಶಸ್ತಿ ಪ್ರಕ್ರಿಯೆಗಳು ಮುಗಿಯುವವರೆಗೂ ಈ ಸಮಿತಿಯು ಅಸ್ತಿತ್ವದಲ್ಲಿರುತ್ತದೆ ಎಂದು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (4)ರಲ್ಲಿನ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರ ವಿದ್ಯಾ ಮಂಡಳಿಯ ಕಾರ್ಯದರ್ಶಿ ಇವರ ಪತ್ರದಲ್ಲಿ 2008ನೇ ಸಾಲಿನ ಪ್ರಶಸ್ತಿ ಆಯ್ಕೆ ಸಮಿತಿಯನ್ನು ಪುನರ್ ರಚಿಸುವಂತೆ ಕೋರಿರುತ್ತಾರೆ.

ಕಾರ್ಯದರ್ಶಿ, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರ ವಿದ್ಯಾ ಮಂಡಳಿ ಇವರ ಕೋರಿಕೆಯಂತೆ ಶ್ರೇಷ್ಠ ವಿಜ್ಞಾನಿಗಳಿಗೆ ಮತ್ತು ಇಂಜಿನಿಯರುಗಳಿಗೆ ರಾಜ್ಯ ಪ್ರಶಸ್ತಿ ಆಯ್ಕೆ ಸಮಿತಿಯನ್ನು ಪುನರ್ ರಚಿಸುವ ಬಗ್ಗೆ ಪರಿಶೀಲಿಸಿದ ಸರ್ಕಾರವು ಪ್ರೊ. ಸಿ.ಎನ್.ಆರ್. ರಾವ್, ಅಧ್ಯಕ್ಷರು, ಮಾನ್ಯ ಪ್ರಧಾನ ಮಂತ್ರಿಗಳ ವಿಜ್ಞಾನ ಸಲಹಾ ಪರಿಷತ್ತು, ಭಾರತ ಸರ್ಕಾರ, ನ್ಯಾಷನಲ್ ರೀಸರ್ಚ್ ಪ್ರೊಫೆಸರ್ ಮತ್ತು ಗೌ. ಅಧ್ಯಕ್ಷರು, ಜವಹರಲಾಲ್ ನೆಹರು ವಿಜ್ಞಾನ ಸಂಶೋಧನಾ ಕೇಂದ್ರ, ಜಕ್ಕೂರು ಅಂಚೆ, ಬೆಂಗಳೂರು ಇವರನ್ನು ಮೊದಲಿಗೆ ಎಂಟು ಜನ ಸದಸ್ಯರನ್ನೊಳಗೊಂಡ ಶ್ರೇಷ್ಠ ವಿಜ್ಞಾನಿಗಳಿಗೆ ಮತ್ತು ಇಂಜಿನಿಯರುಗಳಿಗೆ ರಾಜ್ಯ ಪ್ರಶಸ್ತಿ ಆಯ್ಕೆ ಸಮಿತಿಗೆ ಅಧ್ಯಕ್ಷರನ್ನಾಗಿ ನೇಮಿಸಿ ನಂತರ ಅವರ ಆಯ್ಕೆಯ ನಿರ್ಣಯದಂತೆ ಮಾಡಲ್ಪಡುವ ಸದಸ್ಯರನ್ನು ಈ ಸಮಿತಿಗೆ ಅಳವಡಿಸಿ ಸರ್ಕಾರದಿಂದ ನೇಮಕಾತಿಯನ್ನು ಆದೇಶಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ: ವಿಯಇ 09 ವಿತ್ರಮ 2009, ಬೆಂಗಳೂರು, ದಿನಾಂಕ: 20ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಪ್ರೊ. ಸಿ.ಎನ್.ಆರ್. ರಾವ್, ಅಧ್ಯಕ್ಷರು, ಮಾನ್ಯ ಪ್ರಧಾನ ಮಂತ್ರಿಗಳ ವಿಜ್ಞಾನ ಸಲಹಾ ಪರಿಷತ್ತು, ಭಾರತ ಸರ್ಕಾರ, ನ್ಯಾಷನಲ್ ರೀಸರ್ಚ್ ಪ್ರೊಫೆಸರ್ ಮತ್ತು ಗೌ. ಅಧ್ಯಕ್ಷರು, ಜವಹರಲಾಲ್ ನೆಹರು ವಿಜ್ಞಾನ ಸಂಶೋಧನಾ ಕೇಂದ್ರ, ಜಕ್ಕೂರು ಅಂಚೆ, ಬೆಂಗಳೂರು ಇವರನ್ನು ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅನುದಾನಿತ ಸಂಸ್ಥೆಯಾದ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರ ವಿದ್ಯಾ ಮಂಡಳಿಯ ಮುಖಾಂತರ ನಡೆಸಲಾಗುವ ಶ್ರೇಷ್ಠ ವಿಜ್ಞಾನಿಗಳಿಗೆ ಮತ್ತು ಇಂಜಿನಿಯರುಗಳಿಗೆ ರಾಜ್ಯ ಪ್ರಶಸ್ತಿ ಆಯ್ಕೆ ಸಮಿತಿಯ ಅಧ್ಯಕ್ಷರನ್ನಾಗಿ ತಕ್ಷಣದಿಂದ ಅನ್ವಯವಾಗುವಂತೆ ಹಾಗೂ ಮುಂದಿನ ಆದೇಶದವರೆಗೂ ನೇಮಿಸಲಾಗಿದೆ.

ಈ ಸಮಿತಿಯ ಸದಸ್ಯರುಗಳ ನೇಮಕಾತಿಯ ಅಧ್ಯಕ್ಷರ ಆಯ್ಕೆ ನಿರ್ಣಯಕ್ಕೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.770

ಕೆ. ಬೋರಲಿಂಗಯ್ಯ
ಸರ್ಕಾರದ ಅಧೀನ ಕಾರ್ಯದರ್ಶಿ,
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ

ವಸತಿ ಸಚಿವಾಲಯ

ವಿಷಯ : ನರೆಗಲ್ ಪಟ್ಟಣ ಆಶ್ರಯ ಸಮಿತಿಗೆ ಅಧಿಕಾರೇತರ ಸದಸ್ಯರ ನೇಮಕಾತಿ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂ: ವಇ/42/ಹೆಚ್ಎಎಂ/1999, ದಿನಾಂಕ 10-5-2000.

ಪ್ರಸ್ತಾವನೆ :

ಈಗಿರುವ ನಗರ ಆಶ್ರಯ ಸಮಿತಿಗಳನ್ನು ಮೇಲೆ ಓದಲಾದ ಆದೇಶದನ್ವಯ, ವಿಧಾನಸಭಾ ಕ್ಷೇತ್ರವಾರು ಪುನರ್ರಚಿಸಲು ತೀರ್ಮಾನಿಸಿದ್ದು, ಅದರಂತೆ ನರೆಗಲ್ ಪಟ್ಟಣ ಆಶ್ರಯ ಸಮಿತಿಗೆ ಅಧಿಕಾರೇತರ ಸದಸ್ಯರನ್ನು ನೇಮಿಸುವ ಬಗ್ಗೆ ಪರಿಶೀಲಿಸಿ. ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ವಇ 63 ಹೆಚ್ಎಎಸ್ 2009, ಬೆಂಗಳೂರು, ದಿನಾಂಕ: 28ನೇ ಫೆಬ್ರವರಿ 2009

ನರೆಗಲ್ ಪಟ್ಟಣ ಆಶ್ರಯ ಸಮಿತಿಗೆ ಈ ಕೆಳಕಂಡವರನ್ನು ಅಧಿಕಾರೇತರ ಸದಸ್ಯರನ್ನಾಗಿ ನೇಮಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಆಶ್ರಯ ಸಮಿತಿಯನ್ನು ಪುನರ್ರಚಿಸಲಾಗಿದೆ.

ಕ್ರ.ಸಂ.	ಅಭ್ಯರ್ಥಿಯ ಹೆಸರು	ವರ್ಗ
1	ಶ್ರೀ ಲಕ್ಷ್ಮಣರಾವ್ ಗಣೇಶಭಟ್, ಗ್ರಾಮ ಪುರೋಹಿತ ಸಾ॥ ನರೆಗಲ್, ರೋಣ ತಾ॥	ಸಾಮಾನ್ಯ
2	ಶ್ರೀ ಕಲ್ಲಪ್ಪ ಮಲ್ಲಪ್ಪ ಕಿಟಗೇರಿ, ಸಾ॥ ನರೆಗಲ್, ರೋಣ ತಾ॥	ಪರಿಶಿಷ್ಟ ಜಾತಿ
3	ಶ್ರೀ ಮಾಬುಸಾಬ ರೈಮಾನಸಾಬ ಹೊಸಮನಿ ಸಾ॥ ನರೆಗಲ್, ರೋಣ ತಾ॥	ಅಲ್ಪಸಂಖ್ಯಾತರು
4	ಶ್ರೀಮತಿ ಲಲಿತಾ ಮಹಾದೇವಪ್ಪ ಛಲವಾದಿ ಸಾ॥ ನರೆಗಲ್, ರೋಣ ತಾ॥	ಪರಿಶಿಷ್ಟ ಜಾತಿ (ಮಹಿಳೆ)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.772

ಕೆ.ಆರ್. ವಲ್ಲೂರ

ಪೀಠಾಧಿಕಾರಿ-2, ವಸತಿ ಇಲಾಖೆ

ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ವಿಷಯ : ಗುಲ್ಬರ್ಗಾ ಜಿಲ್ಲೆಯ ಚಿತ್ತಾಪುರ ಕಂದಾಯ ತಾಲ್ಲೂಕಿಗೆ ಶ್ರೀ ಸಾಲಿಮಠ್ ಗಂಗಾಧರ್ ಇವರನ್ನು ನೋಟರಿಯಾಗಿ ನೇಮಕ ಮಾಡುವ ಕುರಿತು – (ಶ್ರೀ ಸೈಯದ್ ಮೊಯಿದ್ದೀನ್ ಚಿಸ್ತಿ ಇವರ ನಿಧನದಿಂದ ತೆರವಾದ)

ಓದಲಾಗಿದೆ:
1. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಗುಲ್ಬರ್ಗಾ ಇವರ ಪತ್ರ ಸಂಖ್ಯೆ ಡಿಜಿಎಂ/ಎಡಿಎಂಎನ್/1000/2009, ದಿನಾಂಕ 5-6-2008.
2. ಸರ್ಕಾರಿ ಪತ್ರ ಸಂಖ್ಯೆ ಲಾ 78 ಎಲ್‌ಸಿಎಲ್ 08, ದಿನಾಂಕ 30-6-2008.
3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಗುಲ್ಬರ್ಗಾ ಇವರ ಪತ್ರ ಸಂಖ್ಯೆ: ಡಿಸಿಜಿ/ಎಡಿಎಂಎನ್/97/2009, ದಿನಾಂಕ 6-1-2009.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ 5-6-2008ರ ಪತ್ರದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಗುಲ್ಬರ್ಗಾ ಇವರು ಶ್ರೀ ಸೈಯದ್ ಮೊಯಿನುದ್ದೀನ್ ಚಿಸ್ತಿ ನೋಟರಿ, ಚಿತ್ತಾಪುರ ಇವರು ದಿನಾಂಕ 9-12-2007ರಂದು ನಿಧನರಾಗಿರುವುದಾಗಿ ಧೃಢೀಕರಣ ಮರಣ ಪ್ರಮಾಣ ಪತ್ರದೊಂದಿಗೆ ವರದಿ ಮಾಡಿದ್ದರು.

ಅದರಂತೆ, ಮೇಲೆ (2)ರಲ್ಲಿ ಓದಲಾದ ದಿನಾಂಕ 30-6-2008ರ ಸರ್ಕಾರದ ಪತ್ರದಲ್ಲಿ ಸದರಿ ನೋಟರಿಯ ಬದಲಿ ನೇಮಕಾತಿಗೆ ನೋಟರಿಗಳ ಅಧಿನಿಯಮ/ನಿಯಮಗಳನ್ವಯ ಪ್ರಸ್ತಾವನೆ ಸಲ್ಲಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಗುಲ್ಬರ್ಗಾ ಜಿಲ್ಲೆ, ಇವರನ್ನು ಕೋರಲಾಗಿತ್ತು.

ಮೇಲೆ (3)ರಲ್ಲಿ ಓದಲಾದ ದಿನಾಂಕ 6-1-2009ರ ಪತ್ರದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಗುಲ್ಬರ್ಗಾ ಜಿಲ್ಲೆ ಇವರು 09 ಅರ್ಜಿದಾರರ ಮನವಿಗಳನ್ನೊಳಗೊಂಡ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದ.

ಸರ್ಕಾರದ ಆದೇಶ ಸಂಖ್ಯೆ: ಲಾ 78 ಎಲ್‌ಸಿಎಲ್ 2008, ಬೆಂಗಳೂರು, ದಿನಾಂಕ: 2ನೇ ಮಾರ್ಚ್ 2009

ನೋಟರಿ ಅಧಿನಿಯಮ (1952) ಹಾಗೂ ಇದರ ಅಡಿಯಲ್ಲಿ ರಚಿಸಲಾಗಿರುವ ನೋಟರಿ ನಿಯಮಗಳು (1956)ರ ನಿಯಮ 8(1)ರಲ್ಲಿ ಪ್ರದತ್ತವಾಗಿರುವ ಅಧಿಕಾರ ಚಲಾಯಿಸಿ, ಶ್ರೀ ಸಾಲಿಮಠ್ ಗಂಗಾಧರ್, ಬಿನ್ ವೀರಭದ್ರಯ್ಯ, ವಕೀಲರು, ಕೇರಾಫ್, ನಾಗಮ್ಮ ಸಾಲಿಮಠ್, ಮನೆ ನಂ. 5-1-37. ಹೊಲಿಕಟ್ಟೆ ರಸ್ತೆ, ಚಿತ್ತಾಪುರ-585211, ಗುಲ್ಬರ್ಗಾ ಜಿಲ್ಲೆ ಇವರನ್ನು ವೃತ್ತಿ ಪ್ರಮಾಣ ಪತ್ರ ನೀಡಲಾದ ದಿನಾಂಕದಿಂದ ಐದು ವರ್ಷಗಳ ಅವಧಿಗೆ ಚಿತ್ತಾಪುರ ಕಂದಾಯ ತಾಲ್ಲೂಕಿನ ನೋಟರಿಯನ್ನಾಗಿ ನೇಮಿಸಿದೆ.

ಸದರಿ ವಕೀಲರು, ನಿಯಮಾನುಸಾರ ನಿಗಧಿಪಡಿಸಲಾದ ರೂ. 1000/- (ರೂಪಾಯಿ ಒಂದು ಸಾವಿರಗಳು ಮಾತ್ರ) ಶುಲ್ಕವನ್ನು ಸರ್ಕಾರಿ ಖಜಾನೆಯಲ್ಲಿ ಲೆಕ್ಕಶೀರ್ಷಿಕೆ 0070-ಇತರೆ-ಆಡಳಿತಾತ್ಮಕ-ಸೇವೆಗಳು-01-ನ್ಯಾಯ ಪರಿಪಾಲನೆ-501-0-ಇತರೆ ಸ್ವೀಕೃತಿಗಳು-06-ಇತರೆ ಬಾಬ್ತುಗಳಿಗೆ (0070-01-501-0-06) ಜಮಾ ಮಾಡಿ, ಆ ಬಗೆಗಿನ ಮೂಲ ಚಲನ್ ಮತ್ತು ಹುಟ್ಟಿದ ದಿನಾಂಕವನ್ನು ದೃಢೀಕರಿಸಬಲ್ಲ ದಾಖಲೆಯನ್ನು ಹಾಜರುಪಡಿಸಿದ ನಂತರ ವೃತ್ತಿ ಪ್ರಮಾಣ ಪತ್ರವನ್ನು ನೀಡಲಾಗುವುದು. ತದನಂತರ ಶ್ರೀಯುತರ ಹೆಸರನ್ನು ನೋಟರಿ ಅಧಿನಿಯಮ 1952ರನ್ವಯ ಸರ್ಕಾರ ನಿರ್ವಹಿಸುತ್ತಿರುವ ಪಟ್ಟಿಯಲ್ಲಿ ನಮೂದಿಸಲಾಗುವುದು. ಈ ಸಂಬಂಧದ ವೆಚ್ಚವನ್ನು ವಕೀಲರೆ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.774

ಹೆಚ್.ಆರ್. ಶಕುಂತಲ

ಸರ್ಕಾರದ ಅಧೀನ ಕಾರ್ಯದರ್ಶಿ, (ಆಡಳಿತ-2)

ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ವಿಷಯ : ಶ್ರೀ ಮುದ್ದುಮಲ್ಲಯ್ಯ, ಸಿವಿಲ್ ಜಡ್ಜ್ (ಕಿರಿಯ ವಿಭಾಗ, ಅಮಾನತ್ತು ಆದೇಶದಲ್ಲಿ) ಇವರಿಗೆ ಕಡ್ಡಾಯ ನಿವೃತ್ತಿ ದಂಡನೆ ವಿಧಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಲಾ 106 ಎಲ್ಏಸಿ 97, ದಿನಾಂಕ 18-2-98.

2. ಪತ್ರ ಸಂಖ್ಯೆ: D.1.1/04, (HVC 105/04) ದಿನಾಂಕ 3-2-2009.

ಪ್ರಸ್ತಾವನೆ :

ಮೇಲೆ ಓದಲಾದ ಕ್ರ.ಸಂ. 1ರ ಸರ್ಕಾರದ ಅಧಿಸೂಚನೆಯಲ್ಲಿ ಶ್ರೀ ಮುದ್ದುಮಲ್ಲಯ್ಯ ಇವರನ್ನು, ಸಿವಿಲ್ ಜಡ್ಜ್ (ಕಿ.ವಿ.) ಹುದ್ದೆಗೆ ನೇಮಕಮಾಡಲಾಗಿರುತ್ತದೆ. ಸದರಿ ಅಧಿಕಾರಿಯು ಸಿವಿಲ್ ಜಡ್ಜ್ (ಕಿ.ವಿ.) ಮತ್ತು ಜೆಎಂಎಫ್‌ಸಿ, ಬಸವಕಲ್ಯಾಣ ಹುದ್ದೆಯಲ್ಲಿ ಕಾರ್ಯನಿರ್ವಹಿಸಿರುವ ಅವಧಿಯಲ್ಲಿ ಅಂದರೆ ದಿನಾಂಕ 23-4-2004ರಂದು ಬೀದರ್ ಜಿಲ್ಲೆಯ ಬಸವಕಲ್ಯಾಣದ ವಕೀಲರುಗಳ ಸಂಘದಿಂದ ಸದರಿ ಅಧಿಕಾರಿಯ ವಿರುದ್ಧ ಮಾಡಲಾದ, ಭ್ರಷ್ಟಾಚಾರ, ಅನುಚಿತ ಕಾರ್ಯವೈಖರಿ, ಅಕ್ರಮಗಳು ಇತ್ಯಾದಿ ಆರೋಪಗಳ ಬಗ್ಗೆ ಜಿಲ್ಲಾ ನ್ಯಾಯಾಧೀಶರ ವರದಿ ಪಡೆಯಲಾಗಿದೆ. ಅಲ್ಲದೆ ಶಿಸ್ತು ವಿಚಾರಣೆ ಸಂಖ್ಯೆ: 1/04ರಲ್ಲಿ ವಿಚಾರಣಾಧಿಕಾರಿಯಿಂದ ಆರೋಪಗಳ ಬಗ್ಗೆ ತನಿಖೆ ನಡೆಸಿ ವರದಿ ಪಡೆಯಲಾಗಿದೆ. ಅಧಿಕಾರಿಯನ್ನು ಅಮಾನತ್ತಿನಲ್ಲಿ ಇಡಲಾಗಿರುತ್ತದೆ. ಆರೋಪಗಳ ತೀವ್ರತೆ ಹಾಗೂ ಸಾಬೀತಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯವು ಅಧಿಕಾರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 8(vi)ರ ಮೇರೆಗೆ ಕಡ್ಡಾಯ ನಿವೃತ್ತಿಗೊಳಿಸಬೇಕೆಂದು ನಿರ್ಣಯಿಸಿರುತ್ತದೆ. ಅದರಂತೆ, ಮೇಲೆ ಓದಲಾದ ಕ್ರ.ಸಂ. 2ರ ಪತ್ರದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ರಿಜಿಸ್ಟ್ರಾರ್ ಜನರಲ್, ಬೆಂಗಳೂರು ಅವರು ಶ್ರೀ ಮುದ್ದುಮಲ್ಲಯ್ಯ ಸಿವಿಲ್ ಜಡ್ಜ್ (ಕಿ.ವಿ.) ಇವರ ವಿರುದ್ಧ ನಡೆಸಲಾದ ವಿಚಾರಣಾ ವರದಿಯನ್ನು ಲಗತ್ತಿಸುತ್ತಾ ಸದರಿ ನ್ಯಾಯಿಕ ಅಧಿಕಾರಿಗೆ ಕಡ್ಡಾಯ ನಿವೃತ್ತಿ ದಂಡನೆಯನ್ನು ವಿಧಿಸುವ ತೀರ್ಮಾನವನ್ನು ಜಾರಿಗೊಳಿಸುವ ಸರ್ಕಾರದ ಅದೇಶ ಹೊರಡಿಸುವಂತೆ ಪ್ರಸ್ತಾವನೆ ಕಳುಹಿಸಿದ್ದಾರೆ. ಭಾರತ ಸಂವಿಧಾನದ ಅನುಚ್ಛೇದ 234ರನ್ವಯ ಘನತೆವೆತ್ತ ರಾಜ್ಯಪಾಲರು ಸಿವಿಲ್ ಜಡ್ಜ್ (ಕಿರಿಯ ವಿಭಾಗ) ಹುದ್ದೆಯ ನೇಮಕಾತಿ ಪ್ರಾಧಿಕಾರವಾಗುವುದರಿಂದ ಪ್ರಸ್ತಾವನೆಗೆ ಅವರ ಸಹಮತಿ ಪಡೆಯಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಲಾ 21 ಎಲ್ಏಸಿ 2009, ಬೆಂಗಳೂರು, ದಿನಾಂಕ: 28ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಶ್ರೀ ಮುದ್ದುಮಲ್ಲಯ್ಯ, ಸಿವಿಲ್ ಜಡ್ಜ್ (ಕಿರಿಯ ವಿಭಾಗ) ಮತ್ತು ಜೆಎಂಎಫ್‌ಸಿ, ಬಸವಕಲ್ಯಾಣ (ಅಮಾನತ್ತಿನಲ್ಲಿ) ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 8(vi)ರ ಮೇರೆಗೆ ನ್ಯಾಯಿಕ ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸುವ ದಂಡನೆಯನ್ನು ವಿಧಿಸಿ ಸರ್ಕಾರವು ಆದೇಶಿಸಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.775

ಇ. ಶಿವಾನಂದ

ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-1),

ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

I -F4 -(0)

ಕಂದಾಯ ಸಚಿವಾಲಯ

ವಿಷಯ : ಭೂಮಾಪನ ಇಲಾಖೆಯಲ್ಲಿನ ಪರಿವೀಕ್ಷಣಾ ಭೂದಾಖಲೆಗಳ ಸಹಾಯಕ ನಿರ್ದೇಶಕರು (ಕಾ.ನಿ) ಇವರಿಗೆ ಖಾಯಂ ಪೂರ್ವಾವಧಿ ಘೋಷಿಸುವ ಬಗ್ಗೆ.

ಓದಲಾಗಿದೆ: ಆಯುಕ್ತರು, ಭೂಮಾಪನ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ: ಸಿಬ್ಬಂದಿ(ಜಿ) ಖಾಪೂ.45/08-09, ದಿನಾಂಕ 27-9-2008, 29-11-2008 ಮತ್ತು 29-1-2009.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 27-9-2008ರ ಪತ್ರದಲ್ಲಿ ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯಲ್ಲಿ ನೇಮಕಗೊಂಡಿರುವ ಈ ಕೆಳಕಂಡ ಭೂದಾಖಲೆಗಳ ಸಹಾಯಕ ನಿರ್ದೇಶಕರು (ಕಾ.ನಿ) ರವರುಗಳ ಖಾಯಂ ಪೂರ್ವಾವಧಿ ಮುಕ್ತಾಯಗೊಂಡಿರುವುದಾಗಿ ವರದಿ ಮಾಡಿರುತ್ತಾರೆ.

ಕ್ರಮ ಸಂಖ್ಯೆ	ಅಧಿಕಾರಿಗಳ ಹೆಸರು	ಸರ್ಕಾರಿ ಸೇವೆಗೆ ಹಾಜರಾದ ದಿನಾಂಕ	ಖಾಯಂ ಪೂರ್ವಾವಧಿ ಪೂರ್ಣಗೊಳ್ಳುವ ದಿನಾಂಕ	ಇಲಾಖಾ ಪರೀಕ್ಷೆ ಪಾಸು ಮಾಡಿದ ಬಗ್ಗೆ ಮಾಹಿತಿ
1	ಪಿ.ಎಸ್. ಕುಸುಮಲತ	1-2-2006	31-1-2008	ಪಾಸು ಮಾಡಿರುತ್ತಾರೆ
2	ಬಿ.ಜಿ. ಉಮೇಶ್	17-4-2006	16-4-2008	ಪಾಸು ಮಾಡಿರುತ್ತಾರೆ
3	ಆರ್. ನಿರಂಜನ್	17-4-2006	16-4-2008	ಪಾಸು ಮಾಡಿರುತ್ತಾರೆ
4	ಎಂ.ಎಸ್. ಕೃಷ್ಣಪ್ರಸಾದ್	17-4-2006	16-4-2008	ಪಾಸು ಮಾಡಿರುವುದಿಲ್ಲ
5	ಎಂ.ಎಸ್. ಕೇಶವಮೂರ್ತಿ	17-4-2006	16-4-2008	ಪಾಸು ಮಾಡಿರುತ್ತಾರೆ
6	ಎಂ. ರವಿಕುಮಾರ್	26-4-2006	25-4-2008	ಪಾಸು ಮಾಡಿರುತ್ತಾರೆ
7	ಬಿ. ರಾಮಾಂಜನೇಯ	19-4-2006	18-4-2008	ಪಾಸು ಮಾಡಿರುತ್ತಾರೆ
8	ಡಾ: ಬಿ. ರಾಜಣ್ಣ	17-4-2006	16-4-2008	ಪಾಸು ಮಾಡಿರುತ್ತಾರೆ
9	ಕೆ. ರಮ್ಯ	23-6-2006	22-6-2008	ಪಾಸು ಮಾಡಿರುತ್ತಾರೆ

ಮೇಲ್ಕಂಡ ಅಧಿಕಾರಿಗಳ ಪೈಕಿ ಕ್ರಮ ಸಂಖ್ಯೆ: 4ರಲ್ಲಿ ತೋರಿಸಲಾದ ಶ್ರೀ ಎಂ.ಎಸ್. ಕೃಷ್ಣಪ್ರಸಾದ್ ಇವರನ್ನು ಬಿಟ್ಟು ಉಳಿದ ಎಲ್ಲಾ ಅಧಿಕಾರಿಗಳು ಎಲ್ಲಾ ಪರೀಕ್ಷೆಗಳನ್ನು ನಿಗದಿತ ಅವಧಿಯೊಳಗೆ ಪಾಸು ಮಾಡಿರುವುದರಿಂದ ಅವರುಗಳ ಹೆಸರಿನ ಮುಂದೆ ತೋರಿಸಲಾದ ದಿನಾಂಕದಿಂದ ಎರಡು ವರ್ಷಗಳ ಖಾಯಂ ಪೂರ್ವಾವಧಿಯನ್ನು ಕರ್ನಾಟಕ ಸರ್ಕಾರಿ ಸೇವಾ (ಖಾಯಂ ಪೂರ್ವಾವಧಿ) ನಿಯಮಗಳು 1977ರ ನಿಯಮ 5(1)(ಎ)ರನ್ವಯ ತೃಪ್ತಿಕರವಾಗಿ ಪೂರ್ಣಗೊಳಿಸಿರುತ್ತಾರೆಂದು ಸರ್ಕಾರದ ಆದೇಶ ನೀಡಲು ಕೋರಿರುತ್ತಾರೆ ಹಾಗೂ ಶ್ರೀ ಎಂ.ಎನ್. ಕೃಷ್ಣಪ್ರಸಾದ್, ಇವರ ಖಾಯಂ ಪೂರ್ವಾವಧಿಯನ್ನು ಕರ್ನಾಟಕ ಸರ್ಕಾರಿ ಸೇವಾ (ಖಾಯಂ ಪೂರ್ವಾವಧಿ) ನಿಯಮಾವಳಿಗಳ ನಿಯಮ 4(i)(ii)ರ ಮೇರೆಗೆ ದಿನಾಂಕ 17-4-2008 ರಿಂದ ಒಂದು ವರ್ಷ ವಿಸ್ತರಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮುಂದುವರೆದು, ಆಯುಕ್ತರು, ಭೂಮಾಪನ ಇಲಾಖೆ ರವರು ಮೇಲೆ ಹೇಳಲಾದ ದಿನಾಂಕ 29-11-2008ರ ಪತ್ರದಲ್ಲಿ ಶ್ರೀ ಬಿ. ರಾಮಾಂಜನೇಯ, ಭೂದಾಖಲೆಗಳ ಸಹಾಯಕ ನಿರ್ದೇಶಕರು, ನಗರಮಾಪನ ತಂಡ-2 ರವರು ತಮ್ಮ ಕೆಲಸ ಕಾರ್ಯಗಳಲ್ಲಿ ಬೇಜವಾಬ್ದಾರಿತನದಿಂದ ನಿರ್ವಹಿಸುತ್ತಿರುವುದಾಗಿ, ವಿಚಾರಣಾಧಿಕಾರಿಗಳು, ನಗರಮಾಪನ ತಂಡ-1 ರವರು ತಿಳಿಸಿದ್ದಾರೆ. ಆದ್ದರಿಂದ ಶ್ರೀ ಬಿ. ರಾಮಾಂಜನೇಯ ಇವರ ಖಾಯಂ ಪೂರ್ವಾವಧಿಯನ್ನು ದಿನಾಂಕ 19-4-2008ರಿಂದ ಒಂದು ವರ್ಷದ ಅವಧಿಗೆ ವಿಸ್ತರಿಸುವಂತೆ/ತಾತ್ಕಾಲಿಕವಾಗಿ ತಡೆಹಿಡಿಯುವಂತೆ ಕೋರಿದ್ದಾರೆ.

ಆಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಶ್ರೀ ಬಿ. ರಾಮಾಂಜನೇಯ ರವರು ದಿನಾಂಕ 19-4-2006ರಂದು ಕೆಲಸಕ್ಕೆ ಸೇರಿದ್ದು ಅವರು ದಿನಾಂಕ 18-4-2008ರವರೆಗೆ ಯಾವುದೇ ಆಕ್ಷೇಪಣೆ ಇಲ್ಲದೆ ಕಾರ್ಯ ನಿರ್ವಹಿಸಿರುವುದನ್ನು ಪರಿಗಣಿಸಿ ಪ್ರಸ್ತಾಪಿತ 9 ಪ್ರೋಬೇಷನರಿ ಭೂದಾಖಲೆಗಳ ಸಹಾಯಕ ನಿರ್ದೇಶಕರ ಪೈಕಿ ಇಲಾಖಾ ಪರೀಕ್ಷೆ ಪಾಸು ಮಾಡದೇ ಇರುವ ಶ್ರೀ ಎಂ.ಎಸ್. ಕೃಷ್ಣಪ್ರಸಾದ್ ರವರೊಬ್ಬರ ಬಗ್ಗೆ ದಿನಾಂಕ 17-4-2008ರಿಂದ ಒಂದು ವರ್ಷ ಖಾಯಂ ಪೂರ್ವಾವಧಿ ವಿಸ್ತರಿಸಿ, ಉಳಿದ 8 ಜನರ ಖಾಯಂ ಪೂರ್ವಾವಧಿ ಘೋಷಿಸುವುದು ಸೂಕ್ತ ಎಂದು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಕಂಇ 114 ಭೂದಾಸೇ(3) 2008, ಬೆಂಗಳೂರು, ದಿನಾಂಕ: 24ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡ ಪರಿವೀಕ್ಷಣಾ ಭೂದಾಖಲೆಗಳ ಸಹಾಯಕ ನಿರ್ದೇಶಕರು (ಕಾ.ನಿ)ಗಳನ್ನು ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಗಳು 1977ರ ನಿಯಮ 5(1)(ಎ)ರಡಿ ಪರಿವೀಕ್ಷಣಾ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರುತ್ತಾರೆಂದು ಘೋಷಿಸಿ ಆದೇಶಿಸಿದೆ.

ಕ್ರಮ ಸಂಖ್ಯೆ	ಅಧಿಕಾರಿಗಳ ಹೆಸರು	ಪರಿವೀಕ್ಷಣಾ ಅವಧಿ ಪ್ರಾರಂಭವಾದ ದಿನಾಂಕ	ಪರಿವೀಕ್ಷಣಾ ಅವಧಿ ಮುಕ್ತಾಯವಾದ ದಿನಾಂಕ
1	ಪಿ.ಎಸ್. ಕುಸುಮಲತ	1-2-2006	31-1-2008
2	ಬಿ.ಜಿ. ಉಮೇಶ್	17-4-2006	16-4-2008
3	ಆರ್. ನಿರಂಜನ್	17-4-2006	16-4-2008
4	ಎಂ.ಎಸ್. ಕೇಶವಮೂರ್ತಿ	17-4-2006	16-4-2008
5	ಎಂ. ರವಿಕುಮಾರ್	26-4-2006	25-4-2008
6	ಬಿ. ರಾಮಾಂಜನೇಯ	19-4-2006	18-4-2008
7	ಡಾ: ಬಿ. ರಾಜಣ್ಣ	17-4-2006	16-4-2008
8	ಕೆ. ರಮ್ಯ	23-6-2006	22-6-2008

ಶ್ರೀ ಎಂ.ಎಸ್. ಕೃಷ್ಣಪ್ರಸಾದ್, ಪರಿವೀಕ್ಷಣಾ ಭೂದಾಖಲೆಗಳ ಸಹಾಯಕ ನಿರ್ದೇಶಕರು (ಕಾ.ನಿ.) ಇವರ ಪರಿವೀಕ್ಷಣಾ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಗಳು 1977ರ ನಿಯಮ 4(i)(ii)ರ ಮೇರೆಗೆ ದಿನಾಂಕ 17-4-2008 ರಿಂದ ಮುಂದಿನ ಒಂದು ವರ್ಷದವರೆಗೆ ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.813

ಎಸ್.ಬಿ. ಸಸಾಲಟ್ಟಿ

ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಭೂಮಾಪನ)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ, ಬೆಂಗಳೂರು ಇದರ ಉಪಾಧ್ಯಕ್ಷರ ಆಪ್ತ ಶಾಖೆಗೆ ಮಂಜೂರಾದ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 68 ಶಿಸನೇ 2008, ದಿನಾಂಕ 5-8-2008 ಮತ್ತು 11-8-2008
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 68 ಶಿಸನೇ 2008, ದಿನಾಂಕ 24-11-2008.
3. ಉಪಾಧ್ಯಕ್ಷರು, ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ, ಇವರ ಕಡತ ಸಂಖ್ಯೆ: ಅಭಾಸಕ/ಉ/1/08, ದಿನಾಂಕ 29-12-2008.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ 5-8-2008ರ ಆದೇಶದಲ್ಲಿ ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ, ಬೆಂಗಳೂರು ಇದನ್ನು ಸ್ಥಾಪಿಸಲು ಮಂಜೂರಾತಿ ನೀಡಲಾಗಿದೆ. ದಿನಾಂಕ 11-8-2008ರ ಆದೇಶದಲ್ಲಿ ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ, ಇದರ ಉಪಾಧ್ಯಕ್ಷರಿಗೆ ಸಂಪುಟ ದರ್ಜೆ ಸಚಿವರ ಸ್ಥಾನಮಾನವನ್ನು ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಆದೇಶದಲ್ಲಿ ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ, ಈ ಸಮಿತಿಯ ಉಪಾಧ್ಯಕ್ಷರ ಆಪ್ತ ಶಾಖೆಗೆ ಹಾಗೂ ಸಮಿತಿ ಶಾಖೆಗೆ ಒಟ್ಟು 13 ವಿವಿಧ ಹುದ್ದೆಗಳನ್ನು ಮಂಜೂರು ಮಾಡಿ ಈ ಹುದ್ದೆಗಳನ್ನು ನಿಯೋಜನೆ/ಹೊರಗುತ್ತಿಗೆ ಮೂಲಕ ಭರ್ತಿ ಮಾಡಲು ತಿಳಿಸಲಾಗಿದೆ.

ಉಪಾಧ್ಯಕ್ಷರು, ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ, ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ಕಡತದಲ್ಲಿ ಹೊಸದಾಗಿ ಸ್ಥಾಪಿಸಲಾದ ಅನಿವಾಸಿ ಭಾರತೀಯರ ಸಮಿತಿಯ ಉಪಾಧ್ಯಕ್ಷರ ಕಛೇರಿಗೆ ಹಾಗೂ ಸಮಿತಿಯ ಕಛೇರಿಗೆ ಸಿ.ಆ.ಸು. ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇರುವ ಕಾರಣ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿದೆ. ಸಚಿವರ ಆಪ್ತ ಶಾಖೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಆಪ್ತ ಸಿಬ್ಬಂದಿಯನ್ನು ನೇಮಕ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಅನಿವಾಸಿ ಭಾರತೀಯರ ಸಮಿತಿಯ ಉಪಾಧ್ಯಕ್ಷರ ಆಪ್ತ ಶಾಖೆಗೆ ಸಿಬ್ಬಂದಿಯನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ದಿನಾಂಕ 24-11-2008ರ ಆದೇಶದಲ್ಲಿ ಮಂಜೂರಾಗಿರುವ ಹುದ್ದೆಗಳನ್ನು ನಿಯೋಜನೆ/ಗುತ್ತಿಗೆ ಆಧಾರದ ಮೇಲೆ ತುಂಬಲು ಅನುಮತಿ ನೀಡುವಂತೆ ಕೋರಿರುವುದನ್ನು ಪರಿಶೀಲಿಸಲಾಗಿದೆ.

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಗಣಿಸಿ ದಿನಾಂಕ 11-8-2008ರ ಸಿ.ಆ.ಸು.ಇ. 68 ಶಿಸನೇ 2008ರ ಆದೇಶದಲ್ಲಿ ಅನಿವಾಸಿ ಭಾರತೀಯರ ಸಮಿತಿ ಕರ್ನಾಟಕ ಇದರ ಉಪಾಧ್ಯಕ್ಷರಿಗೆ ಸಂಪುಟ ದರ್ಜೆ ಸ್ಥಾನಮಾನವನ್ನು ನೀಡಲಾಗಿರುವ ಹಿನ್ನೆಲೆಯಲ್ಲಿ ಸದರಿ ಸಮಿತಿಯ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಮಂಜೂರಾದ ಹುದ್ದೆಗಳಲ್ಲಿ ಮಾತ್ರ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅನುಮತಿ ನೀಡುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 68 ಶಿಸನೇ 2008, ಬೆಂಗಳೂರು, ದಿನಾಂಕ: 4ನೇ ಮಾರ್ಚ್ 2009.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ "ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ" ಇದರ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಸರ್ಕಾರಿ ಆದೇಶ 24-11-2008ರ ಸಿಆಸುಇ 68 ಶಿಸನೇ 2008ರಲ್ಲಿ ಸದರಿ ಸಮಿತಿಯ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಮಂಜೂರಾದ ಹುದ್ದೆಗಳಲ್ಲಿ ಮಾತ್ರ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಸರ್ಕಾರದ ಅನುಮತಿಯನ್ನು ನೀಡಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 147-ವೆಚ್ಚ 12/09, ದಿನಾಂಕ 20-2-2009ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.815

ಎಸ್. ತಿಪ್ಪೇಸ್ವಾಮಿ

ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

(ರಾಜ್ಯ ಶಿಷ್ಟಾಚಾರ)

ವಿಷಯ : ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ನಿಯೋಜನೆ ಮೇಲೆ ಕಾರ್ಯ ನಿರ್ವಹಿಸುತ್ತಿರುವ ನ್ಯಾಯಾಂಗ ಅಧಿಕಾರಿಗಳಿಗೆ 'Robe Allowance' ಮಂಜೂರು ಮಾಡುವ ಬಗ್ಗೆ.

ಉಲ್ಲೇಖ : 1. ಸರ್ಕಾರಿ ಆದೇಶ ಸಂಖ್ಯೆ ಲಾ 124 ಎಲ್‌ಎಸಿ 1997, ದಿನಾಂಕ 17-11-2004.

2. ಶ್ರೀ ಕೆ.ಎಸ್. ಪುಂಡಲೀಕ (24-9-2008), ಶ್ರೀ ಎಸ್.ಎಲ್. ಪಾಟೀಲ್ (19-12-2008), ಶ್ರೀ ಆರ್.ಎಸ್. ಪಾಟೀಲ್ (22-4-2008) ಹಾಗೂ ಶ್ರೀ ಜಗದೀಶ್ ಎಸ್. ಚಿಕ್ಕಣ್ಣನವರ್ (11-2-2008) ಅವರುಗಳ ಮನವಿ.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ನ್ಯಾಯಾಂಗ ಇಲಾಖೆಗೆ ಸೇರಿದ ಅಧಿಕಾರಿಗಳಿಗೆ (ಜ್ಯುಡಿಷಿಯಲ್ ಆಫೀಸರ್ಸ್) ಐದು (5) ವರ್ಷಗಳಿಗೊಮ್ಮೆ ರೂ. 5,000.00 ರಂತೆ 'Robe Allowance' ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಕರ್ನಾಟಕ ಸರ್ಕಾರಿ ಸಚಿವಾಲಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಯಲ್ಲಿ ನ್ಯಾಯಾಂಗ ಸೇವೆಯಿಂದ ನಿಯೋಜನೆ ಮೇರೆಗೆ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಮೇಲೆ (2)ರಲ್ಲಿ ಓದಲಾದ ಮನವಿಗಳನ್ನು ಸಲ್ಲಿಸಿ, ಸರ್ವೋಚ್ಚ ನ್ಯಾಯಾಲಯವು ದಿನಾಂಕ 5-2-2008ರಂದು ನೀಡಿದ ಆದೇಶದಂತೆ ನಿಯೋಜನೆ ಮೇಲಿರುವ ತಮಗೂ ಸಹ 5 ವರ್ಷಕ್ಕೊಮ್ಮೆ ರೋಬ್ ಅಲೋಯೆನ್ಸ್ ಮಂಜೂರು ಮಾಡುವಂತೆ ಕೋರಿದ್ದಾರೆ. ಅಧಿಕಾರಿಗಳ ಕೋರಿಕೆಯನ್ನು ಸರ್ವೋಚ್ಚ ನ್ಯಾಯಾಲಯದ ಆದೇಶದೊಂದಿಗೆ ಪರಿಶೀಲಿಸಲಾಗಿದೆ. ಅಖಿಲ ಭಾರತ ನ್ಯಾಯಾಧೀಶರ ಸಂಘವು ಸಲ್ಲಿಸಿದ ರಿಟ್ ಅರ್ಜಿ (ಸಿ) ಸಂಖ್ಯೆ 1022/1989ರಲ್ಲಿ ಸಲ್ಲಿಸಲಾದ ವಾದಕಾಲೀನ ಅರ್ಜಿ ಸಂಖ್ಯೆ 213ರಲ್ಲಿ ಸರ್ವೋಚ್ಚ ನ್ಯಾಯಾಲಯವು ದಿನಾಂಕ 5-2-2008ರಂದು ಈ ಕೆಳಕಂಡಂತೆ ಆದೇಶ ನೀಡಿದೆ:

> This application is filed by six officers working in the cadre of District Judges in the Kerala State Higher Judicial Service. It is contended that Judicial Officers while on deputation as Law Secretary, Registrar General Registrars, Additional Registrar are denied the benefit of Shetty Commission recommendations, merely because they are working on deputation. The stand taken by the State Government is not correct. The Officers continue to be judicial officers even though they are on deputation. The State Government is, therefore, directed to pass appropriate orders within a period eight weeks extending the benefits to those judicial officers who are working on deputation.
>
> I.A. is disposed of accordingly.

ಸರ್ವೋಚ್ಚ ನ್ಯಾಯಾಲಯದ ಮೇಲಿನ ಆದೇಶದನ್ವಯ ನ್ಯಾಯಾಂಗ ಸೇವೆಯ ಅಧಿಕಾರಿಗಳು ನಿಯೋಜನೆ ಮೇಲೆ ಬೇರೆಡೆ ಕಾರ್ಯ ನಿರ್ವಹಿಸುವಾಗಲೂ ಸಹ ನ್ಯಾಯಾಂಗ ಅಧಿಕಾರಿಗಳಾಗಿಯೇ ಮುಂದುವರಿಯುತ್ತಾರೆ. ಇದನ್ನು ಪರಿಗಣಿಸಿದ ಸರ್ಕಾರವು ನ್ಯಾಯಾಂಗ ಸೇವೆಯಿಂದ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ನಿಯೋಜನೆ ಮೇರೆಗೆ ಕಾರ್ಯ ನಿರ್ವಹಿಸುತ್ತಿರುವ ಉಲ್ಲೇಖಿತ ಅಧಿಕಾರಿಗಳ ಮನವಿಯನ್ನು ಪರಿಗಣಿಸಿ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 154 ಸಅಸೇ 2008, ಬೆಂಗಳೂರು, ದಿನಾಂಕ: 9ನೇ ಮಾರ್ಚ್ 2009

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ವೋಚ್ಚ ನ್ಯಾಯಾಲಯವು ದಿನಾಂಕ 5-2-2008ರಂದು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ನಿಯೋಜನೆ ಮೇಲೆ ಕಾರ್ಯ ನಿರ್ವಹಿಸುತ್ತಿರುವ ನ್ಯಾಯಾಧೀಶರುಗಳಿಗೆ ಐದು ವರ್ಷಗಳಿಗೊಮ್ಮೆ ನೀಡಬೇಕಾದ ರೂ. 5,000/-ರಂತೆ (ರೂಪಾಯಿ ಐದು ಸಾವಿರಗಳು ಮಾತ್ರ) 'Robe Allowance'ನ್ನು ಮಂಜೂರು ಮಾಡಲಾಗಿದೆ.

ಈ ವೆಚ್ಚವನ್ನು ಸಚಿವಾಲಯಕ್ಕೆ ಸಂಬಂಧಿಸಿದ "Salary Head Other Allowances" ನಿಂದ ಭರಿಸತಕ್ಕದ್ದು.

ಈ ಆದೇಶವನ್ನು ಅನಧಿಕೃತ ಟಿಪ್ಪಣಿ ಸಂಖ್ಯೆ ಆಇ 573 ವೆಚ್ಚ-5/2008, ದಿನಾಂಕ 11-6-2008ರ ಅನ್ವಯ ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಿದ ನಂತರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.843 **ಎಂ.ಎಸ್. ಶಿವರಾಮ್**

ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸು ಇಲಾಖೆ (ಸೇವೆಗಳು-3)

ವಿಷಯ : ಕರ್ನಾಟಕ ಸರ್ಕಾರ ಸಚಿವಾಲಯದ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಲ್ಲಿ ವೇತನ ಶ್ರೇಣಿ ರಹಿತ ಜಂಟಿ ಕಾರ್ಯದರ್ಶಿ ಹುದ್ದೆಯನ್ನು ಸೃಜಿಸುವ ಬಗ್ಗೆ.

ಪ್ರಸ್ತಾವನೆ :

ಕರ್ನಾಟಕ ಸರ್ಕಾರ ಸಚಿವಾಲಯದ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಲ್ಲಿ ವಿಮಾನ ನಿಲ್ದಾಣ ರೈಲ್ವೆ ಸಂಪರ್ಕದ ಮೂಲಭೂತ ಸೌಲಭ್ಯಗಳನ್ನು ಸೃಜಿಸುವ ಅವಶ್ಯಕತೆಯಿದ್ದು, ಈ ಸಂಬಂಧವಾಗಿ ರಾಜ್ಯ ಸರ್ಕಾರದ ಇಲಾಖೆಗಳು ಹಾಗೂ ರೈಲ್ವೆ ಸಚಿವಾಲಯದೊಂದಿಗೆ ಸಂಪರ್ಕ ಸಾಧಿಸಲು ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಯ ಅವಶ್ಯಕತೆ ಇರುವುದರಿಂದ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಲ್ಲಿ ವೇತನ ಶ್ರೇಣಿ ರಹಿತ ಜಂಟಿ ಕಾರ್ಯದರ್ಶಿ ಹುದ್ದೆಯನ್ನು ಸೃಜಿಸುವ ಅಗತ್ಯತೆಯನ್ನು ಮನಗಂಡ ಸರ್ಕಾರವು ಅದರಂತೆ ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 874 ಸಅಸೇ 2008, ಬೆಂಗಳೂರು, ದಿನಾಂಕ: 7ನೇ ಮಾರ್ಚ್ 2009

ಕರ್ನಾಟಕ ಸರ್ಕಾರ ಸಚಿವಾಲಯದ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಲ್ಲಿ ವೇತನ ಶ್ರೇಣಿ ರಹಿತ ಜಂಟಿ ಕಾರ್ಯದರ್ಶಿ ಹುದ್ದೆಯನ್ನು ದಿನಾಂಕ 15-1-2009ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸೃಜಿಸಲಾಗಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 81 ವೆಚ್ಚ-12, 2009, ದಿನಾಂಕ 9-2-2009ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.844 **ಎಂ.ಎಸ್. ಶಿವರಾಮ್**

ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸು ಇಲಾಖೆ (ಸೇವೆಗಳು-3)

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ವಿಷಯ : ಶ್ರೀ ಇ.ಇ. ಗಂಗರಾಜಯ್ಯ, ವಲಯ ಅರಣ್ಯಾಧಿಕಾರಿ ಇವರು ನೇಮಕಾತಿ ನಿರೀಕ್ಷಣೆಯಲ್ಲಿ ಕಳೆದ ಅವಧಿಯನ್ನು ಕಡ್ಡಾಯ ನಿರೀಕ್ಷಣಾ ಅವಧಿಯೆಂದು ಪರಿಗಣಿಸುವ ಬಗ್ಗೆ.

ಓದಲಾಗಿದೆ: ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಪತ್ರ ಸಂಖ್ಯೆ: ಬಿ1/ರಜೆ/ವಿವ-109/06-07, ದಿನಾಂಕ 20-12-2007 ಹಾಗೂ 17-7-2008.

ಪ್ರಸ್ತಾವನೆ :

ಶ್ರೀ ಇ.ಇ. ಗಂಗರಾಜಯ್ಯ, ವಲಯ ಅರಣ್ಯಾಧಿಕಾರಿ ಇವರ ಸೇವೆಯನ್ನು ಜಲಾನಯನ ಅಭಿವೃದ್ಧಿ ಇಲಾಖೆ ದಿನಾಂಕ 8-6-2005 ರಂದು ಹಿಂತಿರುಗಿಸಿದೆ. ಆ ಇಲಾಖೆಯಿಂದ ದಿನಾಂಕ 8-6-2005ರಂದು ಬಿಡುಗಡೆಗೊಂಡು ಬದಲಿ ನೇಮಕಾತಿ ಕೋರಿ ದಿನಾಂಕ 9-6-2005 ರಂದು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿಯಲ್ಲಿ ವರದಿ ಮಾಡಿಕೊಂಡಿರುತ್ತಾರೆ. ನಂತರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ರವರ ಕಛೇರಿ ಆದೇಶ ಸಂಖ್ಯೆ: 81/05-06, ದಿನಾಂಕ 18-6-2005ರಲ್ಲಿ ಇವರನ್ನು ಕಾರ್ಯ ಯೋಜನೆ, ಶಿವಮೊಗ್ಗ ಹುದ್ದೆಗೆ ನೇಮಿಸಿದ್ದು ಅನಾರೋಗ್ಯದ ಕಾರಣ ಸದರಿ ಹುದ್ದೆಯಲ್ಲಿ ವರದಿ ಮಾಡಿಕೊಂಡಿರುವುದಿಲ್ಲ.

ನಂತರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ರವರ ಆದೇಶ ಸಂಖ್ಯೆ 90/2005-06, ದಿನಾಂಕ 30-6-2005ರಲ್ಲಿ ಇವರನ್ನು ದೇವನಹಳ್ಳಿ ವಲಯಕ್ಕೆ ಶ್ರೀ ಎ.ಸಿ. ನಾಗರಾಜ್, ಇವರ ಸ್ಥಳಕ್ಕೆ ವರ್ಗಾಯಿಸಲಾಗಿದೆ. ಅದರಂತೆ ದಿನಾಂಕ 2-7-2005 ರಂದು ಉಪ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ಗ್ರಾಮಾಂತರ ವಿಭಾಗ ಇವರ ಕಛೇರಿಯಲ್ಲಿ ಕಾರ್ಯ ವರದಿ ಮಾಡಿಕೊಂಡಿರುತ್ತಾರೆ. ಈ ವರ್ಗಾವಣೆ ಆದೇಶ ವಿರುದ್ಧ ಶ್ರೀ ಎ.ಸಿ. ನಾಗರಾಜ್ ವಲಯ ಅರಣ್ಯಾಧಿಕಾರಿ ಇವರು ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಅರ್ಜಿ ಸಂಖ್ಯೆ 5056/05ನ್ನು ಸಲ್ಲಿಸಿದ್ದು, ನ್ಯಾಯಮಂಡಳಿ ದಿನಾಂಕ 7-7-2005 ರಂದು ಈ ವರ್ಗಾವಣೆ ಆದೇಶಕ್ಕೆ ತಡೆಯಾಜ್ಞೆ ನೀಡಿ, ವೃಂದ ನಿರ್ವಾಹಣಾ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಲು ಸೂಚಿಸಿದೆ.

ವೃಂದ ನಿರ್ವಾಹಣಾ ಪ್ರಾಧಿಕಾರದ ದಿನಾಂಕ 18-7-2005ರ ತೀರ್ಮಾನದಂತೆ ಅಧಿಕೃತ ಜ್ಞಾಪನಾ ಸಂಖ್ಯೆ: ಟಿ1:ಆರ್‌ಎಫ್‌ಓ:ಟಿಆರ್‌ಎಸ್:ಸಿಆರ್-:2005-06, ದಿನಾಂಕ 21-7-2005ರಲ್ಲಿ ಶ್ರೀ ಇ.ಇ. ಗಂಗರಾಜಯ್ಯ ಇವರನ್ನು ದೇವನಹಳ್ಳಿ ವಲಯದಲ್ಲಿ ಹಾಗೂ ಶ್ರೀ ಎ.ಸಿ. ನಾಗರಾಜ್, ಇವರನ್ನು ವೃಕ್ಷ ಘಟಕ, ಶ್ರೀಮಂಗಲ ಇಲ್ಲಿಗೆ ವರ್ಗಾಯಿಸಿ ಆದೇಶ ಹೊರಡಿಸಿದೆ.

ಈ ಆದೇಶವನ್ನು ಪುನಃ ಶ್ರೀ ಎ.ಸಿ. ನಾಗರಾಜ್, ಇವರು ಕರ್ನಾಟಕ ಆಡಳಿತ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ 5836/05ರಲ್ಲಿ ಪ್ರಶ್ನಿಸಿದ ಕಾರಣ ಕರ್ನಾಟಕ ಆಡಳಿತ ನ್ಯಾಯಮಂಡಳಿಯು ದಿನಾಂಕ 20-1-2006ರ ಆದೇಶದಲ್ಲಿ ಶ್ರೀ ಎ.ಸಿ. ನಾಗರಾಜ್, ವಲಯ ಅರಣ್ಯಾಧಿಕಾರಿ ಇವರನ್ನು ದೇವನಹಳ್ಳಿ ವಲಯದಲ್ಲಿ ಮುಂದುವರಿಸಲು ಹಾಗೂ ಶ್ರೀ ಇ.ಇ. ಗಂಗರಾಜಯ್ಯ, ವಲಯ ಅರಣ್ಯಾಧಿಕಾರಿ ಇವರನ್ನು ಬೆಂಗಳೂರು ಸಮೀಪ ಖಾಲಿ ಇರುವ ಹುದ್ದೆಗೆ ನೇಮಿಸಲು ಸೂಚಿಸಿದೆ. ಅದರಂತೆ ಆದೇಶ ಸಂಖ್ಯೆ 173/05-06 ದಿನಾಂಕ 4-3-2006ರಲ್ಲಿ ಶ್ರೀ ಇ.ಇ. ಗಂಗರಾಜಯ್ಯ, ವಲಯ ಅರಣ್ಯಾಧಿಕಾರಿ ಇವರನ್ನು ಬನಶಂಕರಿ ಘಟಕಕ್ಕೆ ವರ್ಗಾವಣೆ ಮಾಡಿದ್ದು, ಅನಾರೋಗ್ಯದ ಕಾರಣ ಸದರಿ ಅಧಿಕಾರಿಯು, ಈ ಹುದ್ದೆಗೆ ಹಾಜರಾಗಿರುವುದಿಲ್ಲ. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಆದೇಶ ಸಂಖ್ಯೆ 3/2006-07, ದಿನಾಂಕ 5-4-2006ರಲ್ಲಿ ಇವರನ್ನು ಹೊಸಕೋಟೆ ವಲಯಕ್ಕೆ ವರ್ಗಾವಣೆ ಮಾಡಿದ್ದು, ಅದರಂತೆ ಶ್ರೀ ಗಂಗರಾಜಯ್ಯ, ವಲಯ ಅರಣ್ಯಾಧಿಕಾರಿ ಇವರು ದಿನಾಂಕ 6-4-2006ರಂದು ಉಪ ಅರಣ್ಯ ಸಂರಕ್ಷಣಾಧಿಕಾರಿ, ಬೆಂಗಳೂರು ಗ್ರಾಮಾಂತರ ವಿಭಾಗದ ಕಛೇರಿಯಲ್ಲಿ ಕಾರ್ಯವರದಿ ಮಾಡಿಕೊಂಡಿರುತ್ತಾರೆ.

ಅಧಿಕಾರಿಯು ಅನಾರೋಗ್ಯದ ನಿಮಿತ್ತ ದಿನಾಂಕ 19-6-2005 ರಿಂದ 1-7-2005 ರವರೆಗೆ ಉಪಯೋಗಿಸಿರುವ ರಜೆಯನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ದಿನಾಂಕ 20-12-2007ರ ಅಧಿಕೃತ ಜ್ಞಾಪನಾ ಸಂಖ್ಯೆ: ಬಿ1/ರಜೆ/ವಿವ-109/2006-07ರಲ್ಲಿ ಮಂಜೂರು ಮಾಡಿರುತ್ತಾರೆ. ಆದುದರಿಂದ ಶ್ರೀ ಇ.ಇ. ಗಂಗರಾಜಯ್ಯ ವಲಯ ಅರಣ್ಯಾಧಿಕಾರಿ ಇವರು ನೇಮಕಾತಿ ನಿರೀಕ್ಷಣೆಯಲ್ಲಿ ಕಳೆದ ಅವಧಿಯನ್ನು ಕಡ್ಡಾಯ ನಿರೀಕ್ಷಣಾ ಅವಧಿಯೆಂದು ಹಾಗೂ ಪರಿವರ್ತಿತ ರಜೆಯನ್ನು ಮಂಜೂರು ಮಾಡುವಂತೆ ಮೇಲೆ ಓದಲಾದ ಪತ್ರಗಳಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಶಿಫಾರಸ್ಸು ಮಾಡಿರುವುದನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಅಪಜೀ 94 ಅಅಸೇ 2008, ಬೆಂಗಳೂರು, ದಿನಾಂಕ: 7ನೇ ಮಾರ್ಚ್ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಇ.ಇ. ಗಂಗರಾಜಯ್ಯ, ವಲಯ ಅರಣ್ಯಾಧಿಕಾರಿ ಇವರು ನೇಮಕಾತಿ ನಿರೀಕ್ಷಣೆಯಲ್ಲಿ ಕಳೆದ ಅವಧಿಯನ್ನು ಕೆಳಕಂಡಂತೆ ಪರಿಗಣಿಸಿ ಆದೇಶಿಸಿದೆ.

1.	ದಿನಾಂಕ 9-6-2005 ರಿಂದ ದಿನಾಂಕ 18-6-2005 ರವರೆಗೆ ಮತ್ತು ದಿನಾಂಕ 2-7-2005 ರಿಂದ ದಿನಾಂಕ 4-3-2006 ರವರೆಗೆ	ಕ.ನಾ.ಸೇ.ನಿ. 8(15)(ಎಫ್) ರನ್ವಯ ಕಡ್ಡಾಯ ನಿರೀಕ್ಷಣಾ ಅವಧಿ
2	ದಿನಾಂಕ 5-3-2006 ರಿಂದ ದಿನಾಂಕ 5-4-2006 ರವರೆಗೆ	ಪರಿವರ್ತಿತ ರಜೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.845

ಗೋಪಾಲ್

ಸರ್ಕಾರದ ಅಧೀನ ಕಾರ್ಯದರ್ಶಿ,

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ (ಸೇವೆಗಳು)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ವಿಷಯ : 2008-09ನೇ ಸಾಲಿಗೆ ಡಿಆರ್‌ಡಿಎ ಆಡಳಿತ ಯೋಜನೆಯ ರಾಜ್ಯದ ಪಾಲಿನ ಎರಡನೇ ಕಂತಿನ ಅನುದಾನವನ್ನು ರಾಜ್ಯದ 3 ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: ಆರ್-20015:28:2007-ಡಿಆರ್‌ಡಿಎ (ಎಸ್‌ಆರ್ ನಂ. 10) ದಿನಾಂಕ 3-4-08, (ಎಸ್‌ಆರ್ ನಂ. 40) ದಿನಾಂಕ 28-5-08.
2. ಸರ್ಕಾರದ ಆದೇಶ ಸಂ: ಗ್ರಾಅಪ 7 ಎಸ್‌ಜೆವೈ (ಡಿಆರ್‌ಡಿಎ) 2008, ಬೆಂಗಳೂರು, ದಿನಾಂಕ 23-5-2008, 26-6-2008.
3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: ಆರ್-17014/10/2008-09, ಡಿಆರ್‌ಡಿಎ (ಎಸ್‌ಎಲ್ 82) ದಿನಾಂಕ 3-11-08 ಮತ್ತು (ಎಸ್ ನಂ. 90) ದಿನಾಂಕ 14-11-2008, (ಎಸ್‌ಎಲ್ ನಂ. 108) ದಿನಾಂಕ 11-12-08, (ಎಸ್‌ಎಲ್ ನಂ. 141) ದಿನಾಂಕ 9-1-09 ಮತ್ತು (ಎಸ್‌ಎಲ್ ನಂ. 159) ದಿನಾಂಕ 23-1-09.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 7 ಎಸ್‌ಜೆವೈ (ಡಿಆರ್‌ಡಿಎ) 2008, ಬೆಂಗಳೂರು, ದಿನಾಂಕ 18-12-2008, 31-1-2009 ಮತ್ತು 19-2-2009.
5. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: ಆರ್-17014/10/2008-09, ಡಿಆರ್‌ಡಿಎ (ಎಸ್ ನಂ. 186) ದಿನಾಂಕ 19-2-09.

ಪ್ರಸ್ತಾವನೆ :

2008-09ನೇ ಸಾಲಿಗೆ ಡಿಆರ್‌ಡಿಎ ಆಡಳಿತ ಯೋಜನೆಯಡಿ ಕೇಂದ್ರ ಸರ್ಕಾರ ಓದಲಾಗಿದೆ (1)ರ ಪತ್ರಗಳ ದಿನಾಂಕ 3-4-2008 ಹಾಗೂ 28-5-2008ರಲ್ಲಿ ರಾಜ್ಯದ 29 ಜಿಲ್ಲಾ ಪಂಚಾಯತಿಗಳಿಗೆ ಒಂದನೇ ಕಂತಿನ ಅನುದಾನವಾಗಿ ರೂ. 5,38,77,000 ಗಳನ್ನು ಬಿಡುಗಡೆ ಮಾಡಿವೆ. ಇದಕ್ಕನುಗುಣವಾಗಿ ರಾಜ್ಯ ಸರ್ಕಾರ ಓದಲಾಗಿದೆ (2)ರ ಆದೇಶಗಳ ಸಮಸಂಖ್ಯೆ ದಿನಾಂಕ 23-5-2008 ಮತ್ತು 26-6-2008ರಲ್ಲಿ ರೂ. 1,79,57,000ಗಳನ್ನು ಬಿಡುಗಡೆ ಮಾಡಿವೆ. ಕೇಂದ್ರ ಸರ್ಕಾರ ಓದಲಾಗಿದೆ (3)ರ ಪತ್ರಗಳಲ್ಲಿ ರಾಜ್ಯದ 21 ಜಿಲ್ಲಾ ಪಂಚಾಯತಿಗಳಿಗೆ ಎರಡನೇ ಕಂತಿನ ಅನುದಾನವಾಗಿ ರೂ. 4,44,60,000ಗಳನ್ನು ಬಿಡುಗಡೆ ಮಾಡಿದೆ. ರಾಜ್ಯ ಸರ್ಕಾರ ಓದಲಾಗಿದೆ (4)ರ ಆದೇಶಗಳಲ್ಲಿ ರಾಜ್ಯದ ಆಯವ್ಯಯದಲ್ಲಿ ಜಿಲ್ಲೆಗಳಿಗೆ ಲಭ್ಯವಿರುವ ಅನುದಾನದ ಆಧಾರದ ಮೇಲೆ ರೂ. 1,47,52,000ಗಳನ್ನು ಬಿಡುಗಡೆ ಮಾಡಿದೆ.

ಓದಲಾಗಿದೆ (5)ರನ್ವಯ ಕೇಂದ್ರ ಸರ್ಕಾರದ ಡಿಆರ್‌ಡಿಎ ಆಡಳಿತ ಯೋಜನೆಯಡಿ ಎರಡನೇ ಕಂತಿನ ಅನುದಾನವಾಗಿ ಬೆಂಗಳೂರು ಗ್ರಾಮಾಂತರ, ಬಳ್ಳಾರಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳಿಗೆ ರೂ. 51,81,000ಗಳನ್ನು ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯ ಸರ್ಕಾರ ತನ್ನ ಪಾಲಿನ ಎರಡನೇ ಕಂತಿನ ಅನುದಾನ ರೂ. 17,27,000ಗಳನ್ನು ಸದರಿ ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಬೇಕಾಗಿದೆ. ಆದುದರಿಂದ, ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 7 ಎಸ್‌ಜೆವೈ (ಡಿಆರ್‌ಡಿಎ) 2008, ಬೆಂಗಳೂರು, ದಿನಾಂಕ: 6ನೇ ಮಾರ್ಚ್ 2009

2008-09ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ಡಿಆರ್‌ಡಿಎ ಆಡಳಿತ ಯೋಜನೆಯಡಿ ಬಿಡುಗಡೆ ಮಾಡಿರುವ ಎರಡನೇ ಕಂತಿನ ಅನುದಾನಕ್ಕೆ ಅನುಗುಣವಾಗಿ ರಾಜ್ಯ ಸರ್ಕಾರವು ತನ್ನ ಪಾಲಿನ ಎರಡನೇ ಕಂತಿನ ಅನುದಾನ ರೂ. 17,27,000ನ್ನು (ಹದಿನೇಳು ಲಕ್ಷದ ಇಪ್ಪತ್ತೇಳು ಸಾವಿರ ರೂಪಾಯಿಗಳು ಮಾತ್ರ) ಕೆಳಕಾಣಿಸಿದ ಮೂರು ಜಿಲ್ಲಾ ಪಂಚಾಯತಿಗಳಿಗೆ ಷರತ್ತುಗಳಿಗೆ ಒಳಪಟ್ಟು ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

ಕ್ರ. ಸಂ.	ಜಿಲ್ಲಾ ಪಂಚಾಯತಿ	ಜಿ.ಪಂ. ಕೋಡ್	ಡಿ.ಡಿ.ಓ ಕೋಡ್	ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಎರಡನೇ ಕಂತಿನ ಅನುದಾನ (ರೂಗಳಲ್ಲಿ)	ರಾಜ್ಯ ಸರ್ಕಾರವು ಬಿಡುಗಡೆ ಮಾಡುತ್ತಿರುವ ಎರಡನೇ ಕಂತಿನ ಅನುದಾನ (ರೂಗಳಲ್ಲಿ)
1	ಬೆಂಗಳೂರು (ಗ್ರಾ)	402	0300zz8001	0	0
2	ಬಳ್ಳಾರಿ	418	3400zz0001	32,01,000	10,67,000
3	ಚಿಕ್ಕಮಗಳೂರು	408	1800zz0017	19,80,000	6,60,000
			ಒಟ್ಟು	**51,81,000**	**17,27,000**

ಡಿಆರ್‌ಡಿಎ ಆಡಳಿತ ಯೋಜನೆಯ ಕೈಪಿಡಿಯ ಮಾರ್ಗಸೂಚಿಯಂತೆ ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು ಜಿಲ್ಲಾ ಪಂಚಾಯತ್ (ಡಿಆರ್‌ಡಿಎ ಆಡಳಿತ ಕೋಶದ) ಸಿಬ್ಬಂದಿಗಳ ವೇತನ ಹಾಗೂ ಸಾದಿಲ್ವಾರು ವೆಚ್ಚಗಳಿಗೆ ಮಾತ್ರ ಉಪಯೋಗಿಸುವುದು. ಇನ್ಯಾವುದೇ ಉದ್ದೇಶಗಳಿಗೆ ಉಪಯೋಗಿಸತಕ್ಕದ್ದಲ್ಲ.

ಅನುದಾನದ ಮಾದರಿಯು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ 75:25ರ ಅನುಪಾತದಲ್ಲಿರುತ್ತದೆ.

ಯೋಜನೆಯ ವೆಚ್ಚವನ್ನು ಲೆಕ್ಕಶೀರ್ಷಿಕೆ "2515 ಇತರೆ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು 00-196-ಜಿಲ್ಲಾ ಪಂಚಾಯತ್‌ಗಳಿಗೆ ಸಹಾಯ-6-ಜಿಲ್ಲಾ ಪಂಚಾಯತ್-06-ಡಿಆರ್‌ಡಿಎ ಆಡಳಿತಾತ್ಮಕ ವೆಚ್ಚ- (ಕೇಂದ್ರ ಪುರಸ್ಕೃತ ಯೋಜನೆ) 2008-2009 (2515-00-196-6-06)"ರಡಿ ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಎಫ್‌ಡಿ 1 ಜೆಡ್‌ಪಿಎ 2007 (ಪಿ2) ದಿನಾಂಕ 26-4-2007 ರನ್ವಯ ಜಿಲ್ಲಾ ಪಂಚಾಯತ್ ನಿಧಿ 1ಕ್ಕೆ ಜಮೆ ಮಾಡಿಕೊಂಡು ಪೇಯಿಸ್ ರಸೀದಿಯ ಮೂಲಕ ಜಿಲ್ಲಾ ಪಂಚಾಯತಿ ನಿಧಿಯಿಂದ ಅನುದಾನವನ್ನು ಖಜಾನೆಯಿಂದ ಪಡೆದುಕೊಂಡು ಕಾರ್ಯಕ್ರಮದ ಅನುಷ್ಠಾನಕ್ಕಾಗಿ ತೆರೆದಿರುವ ಬ್ಯಾಂಕ್ ಖಾತೆಗೆ ಜಮೆ ಮಾಡಿಕೊಂಡು ವೆಚ್ಚವನ್ನು ಭರಿಸತಕ್ಕದ್ದು.

ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನದ ಆಂತರಿಕ ಲೆಕ್ಕ ಪರಿಶೋಧನೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮಾಡುವುದು.

ಬಿಡುಗಡೆ ಮಾಡಿರುವ ಅನುದಾನವನ್ನು ಖಜಾನೆಯಿಂದ ಸೆಳೆಯುವ ಅಧಿಕಾರವನ್ನು ಆಯಾಯ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗೆ ಕಾನೂನು ರೀತ್ಯ ಅಧಿಕಾರ ನೀಡಲಾಗಿದೆ.

ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತಿ ಇವರು ಆಯಾ ತಿಂಗಳ ಪ್ರಗತಿ ವರದಿ ಹಾಗೂ ಹುದ್ದೆವಾರು ವಿವರಗಳನ್ನು ಮುಂದಿನ ತಿಂಗಳ 5ನೇ ತಾರೀಖಿನೊಳಗೆ ನಿರ್ದೇಶಕರು (ಸ್ವಉಕಾ) ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ತಪ್ಪದೇ ಕಳುಹಿಸುವುದು.

ಜಿಲ್ಲಾ ಪಂಚಾಯತಿಗಳ, ಮುಖ್ಯ ಲೆಕ್ಕಾಧಿಕಾರಿಗಳು ಹಣ ಉಪಯೋಗ ಪ್ರಮಾಣ ಪತ್ರ ಹಾಗೂ ಲೆಕ್ಕ ಪರಿಶೋಧನೆ ವರದಿಗಳನ್ನು, ನಿರ್ದೇಶಕರು (ಸ್ವಉಕಾ) ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ತಪ್ಪದೇ ಕಳುಹಿಸುವುದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ ಇವರ ಸಹಮತಿ ಸಂಖ್ಯೆ: ಗ್ರಾಅಪ 85 ಪಿಬಿಎಸ್ 2009, ದಿನಾಂಕ 5-3-2009 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.846

ಡಾ: ಶಮ್ಲಾ ಇಕ್ಬಾಲ್

ನಿರ್ದೇಶಕರು, (ಸ್ವ.ಉ.ಕಾ) ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಸಮಾಜ ಕಲ್ಯಾಣ ಸಚಿವಾಲಯ

ತಿದ್ದುಪಡಿ

ಸಂಖ್ಯೆ: ಸಕಇ 54 ಬಿಸಿಎ 2009, ಬೆಂಗಳೂರು, ದಿನಾಂಕ: 3ನೇ ಮಾರ್ಚ್ 2009

ರಾಜ್ಯದ ಅಲೆಮಾರಿ ಜನಾಂಗದವರಿಗೆ ಸೌಲಭ್ಯ ಹಾಗೂ ಮೀಸಲಾತಿ ಕಲ್ಪಿಸುವಲ್ಲಿ ನೇಮಕ ಮಾಡಲಾದ ರಾಜ್ಯ ಮತ್ತು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಸಲಹಾ ಸಮಿತಿ ಸಿಬ್ಬಂದಿ ನೇಮಕ ಮಾಡಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 97 ಬಿಸಿಎ 2007, ದಿನಾಂಕ 2-6-07ರಲ್ಲಿನ ಕೊನೆಯ ಸಾಲಿನಲ್ಲಿರುವ ಲೆಕ್ಕ ಶೀರ್ಷಿಕೆ "2225-03-001-0-71" ಎಂಬುದನ್ನು "2225-03-001-0-01 NP" ಎಂಬುದಾಗಿ ತಿದ್ದಿ ಓದಿಕೊಳ್ಳುವುದು. ಉಳಿದಂತೆ ಆದೇಶದಲ್ಲಿ ಇತರೇ ಬದಲಾವಣೆಗಳು ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.837

ಕೆ. ಸುಬ್ಬಯ್ಯ

ಸರ್ಕಾರದ ಅಧೀನ ಕಾರ್ಯದರ್ಶಿ-II, ಸಮಾಜ ಕಲ್ಯಾಣ ಇಲಾಖೆ

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಭೀಮಪ್ಪ ಯಮನಪ್ಪ ಬೆಳ್ಳುಬ್ಬಿ, ಡಿವೈ.ಎಸ್.ಪಿ., ಬಸವನಬಾಗೇವಾಡಿ ಪೊಲೀಸ್ ಠಾಣೆ, ವಿಜಾಪುರ ರವರ ವಿರುದ್ಧ ದಾಖಲಾದ ಟ್ರ್ಯಾಪ್ ಪ್ರಕರಣದ ಅಭಿಯೋಜನಾ ಮಂಜೂರಾತಿ ಕುರಿತು.

ಓದಲಾಗಿದೆ: ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: ಲೋಕ/ಐಎನ್‌ವಿ(ಜಿ)ಎಲ್: 43:ಸಿಆರ್-8/2007-08, ದಿನಾಂಕ 29-8-2008.

ಪ್ರಸ್ತಾವನೆ :

ಶ್ರೀ ಭೀಮಪ್ಪ ಯಮನಪ್ಪ ಬೆಳ್ಳುಬ್ಬಿ, ಡಿವೈ.ಎಸ್.ಪಿ. ಬಸವನಬಾಗೇವಾಡಿ ಪೊಲೀಸ್ ಠಾಣೆ, ವಿಜಾಪುರ ಇವರ ವಿರುದ್ಧ ಗುನ್ನೆ ಸಂಖ್ಯೆ: 8/07ರಲ್ಲಿ ಆರಕ್ಷಕ ನಿರೀಕ್ಷಕರು, ಪೊಲೀಸ್ ವಿಭಾಗ, ಕರ್ನಾಟಕ ಲೋಕಾಯುಕ್ತ, ವಿಜಾಪುರ ಪೊಲೀಸ್ ಠಾಣೆಯಲ್ಲಿ ದಾಖಲಿಸಿರುವ ಪ್ರಕರಣದ ತನಿಖಾಧಿಕಾರಿಯ ಅಂತಿಮ ವರದಿ ಮತ್ತು ತನಿಖಾ ದಾಖಲಾತಿಗಳನ್ನು ಮಾನ್ಯ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಪೊಲೀಸ್ ವಿಭಾಗ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ತಮ್ಮ ಪತ್ರ ದಿನಾಂಕ 29-8-2008ರೊಡನೆ ಕಳುಹಿಸುತ್ತಾ ಆಪಾದಿತರನ್ನು ಘನ ನ್ಯಾಯಾಲಯದಲ್ಲಿ ಅಭಿಯೋಜನೆಗೆ ಒಳಪಡಿಸಲು ಭ್ರಷ್ಟಾಚಾರ ನಿರ್ಮೂಲನಾ ಕಾಯ್ದೆ, 1988ರ 19(1)(ಸಿ) ಕಲಂನ ಅಡಿಯಲ್ಲಿ ಮಂಜೂರಾತಿಗಾಗಿ ಸರ್ಕಾರವನ್ನು ಕೋರಿರುತ್ತಾರೆ.

ಸಕ್ಷಮ ಪ್ರಾಧಿಕಾರಿಯಾದ ಸರ್ಕಾರವು, ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಪೊಲೀಸ್ ವಿಭಾಗ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ತಮ್ಮ ಪತ್ರ ಸಂಖ್ಯೆ: ಲೋಕ್: ಐಎನ್‌ವಿ(ಜೆ):ಎಲ್:43:ಸಿಆರ್-8/2007-08, ದಿನಾಂಕ 29-8-2008 ರೊಂದಿಗೆ ಕಳುಹಿಸಿಕೊಟ್ಟ ಈ ಕೆಳಕಂಡ ದಾಖಲಾತಿಗಳನ್ನು ಪರಿಶೀಲಿಸಿದೆ.

1. ಶ್ರೀ ಮಹದೇವಪ್ಪ ಕೆಂಚಪ್ಪ ಹರೇ ಕುರುಬರ ಸಾ: ಕಣಗಾಲ, ಬಸವನಬಾಗೇವಾಡಿ.
2. ಪ್ರಥಮ ವರ್ತಮಾನ ವರದಿ, ಬಸವನಬಾಗೇವಾಡಿ, ಲೋಕಾಯುಕ್ತ ಪೊಲೀಸ್ ಠಾಣೆ ಪ್ರಕರಣದ ಸಂಖ್ಯೆ: 8/07
3. ಪ್ರಾಯೋಗಿಕ ಪಂಚನಾಮೆ ದಿನಾಂಕ 25-10-2007.
4. ಟ್ರ್ಯಾಪ್‌ನ ಮಹಜರ್ ದಿನಾಂಕ 25-10-2007.
5. ರಾಸಾಯನಿಕ ಪರೀಕ್ಷಕರ ಪರೀಕ್ಷಣಾ ವರದಿ ಸಂಖ್ಯೆ: 6(ಸಿ) ದಿನಾಂಕ 26-11-2007.
6. ಕೃತ್ಯ ನಡೆದ ಸ್ಥಳದ ನಕಾಶೆ
7. ಸಾಕ್ಷಿಗಳ ಹೇಳಿಕೆಗಳು:
    1. ಮಹಾದೇವಪ್ಪ ಕೆಂಚಪ್ಪ ಹಿರೇಕುರುಬರ ಸಾ: ಕಣಕಾಲ (ಫಿರ್ಯಾದಿ)
    2. ರಮೇಶ ಚಿದಾನಂದ ನಳಬಂದ ಪ್ರ.ದ.ಸ. (ಪಂಚ ನಂ.1)
    3. ಬಾಲಾಜಿ ಶ್ರೀನಿವಾಸ ಕುಲಕರ್ಣಿ, ಪ್ರ.ದ.ಸ. (ಪಂಚ ನಂ.2)
    4. ಎಮ್.ಸಿ. ನಾಯಕ, ದ್ವಿ.ದ.ಸ. ತಾಲ್ಲೂಕ್ ಪಂಚಾಯತ್ ಬಿಜಾಪುರ.
    5. ಕಾಂತು @ ಕಾಂತಪ್ಪ ಸಿದ್ರಾಮಪ್ಪ ಹೊಸಮನಿ ಸಾ: ಉತ್ನಾಳ
    6. ಸಿದ್ಧವ್ವ ಗಂ. ಸುಬ್ಬಣ್ಣಾ ವಾಲೀಕಾರ ಸಾ: ಕಣಕಾಲ
    7. ಸಂಗಪ್ಪ ಮುದಕಪ್ಪ ಹಾಲಿಹಾಳ ಸಾ: ಕಣಕಾಲ
    8. ಶಾಂತವ್ವ ಸಿದ್ಧಪ್ಪ ವಾಲೀಕಾರಿ ಸಾ; ಕಣಕಾಲ
    9. ಭೀಮಾಬಾಯಿ ಗಂ. ಸಂಗಪ್ಪ ಹಾಲಿಹಾಳ ಸಾ: ಕಣಕಾಲ
    10. ಸಿದ್ಧಪ್ಪ ಸುಬ್ಬಣ್ಣಾ ವಾಲೀಕಾರ ಸಾ: ಕಣಕಾಲ
    11. ಹಣಮಂತ ಸುಬ್ಬಣ್ಣಾ ವಾಲೀಕಾರ ಸಾ: ಕಣಕಾಲ
    12. ಮಲ್ಲಪ್ಪ ಮುದಕಪ್ಪ ಹಾಲಿಹಾಳ ಸಾ: ಕಣಕಾಲ
    13. ಕರಿಯಪ್ಪ ಸಿದ್ಧಪ್ಪ ವಾಲೀಕಾರ ಸಾ: ಕಣಕಾಲ
    14. ಡಿ. ಸಂತೋಷಕುಮಾರ, ಪಿ.ಎಸ್.ಐ., ಬಸವನಬಾಗೇವಾಡಿ
    15. ಕಾಡಯ್ಯ ಚಿದಾನಂದಯ್ಯ ಸ್ಥಾವರಮಠ, ಸಿ.ಎಸ್.ಸಿ., ಡಿ.ಎಸ್.ಪಿ. ಆಫೀಸ್ ಬಸವನಬಾಗೇವಾಡಿ
    16. ಭೀಮಣ್ಣ ಬಸವಲಿಂಗಪ್ಪ ಚಿಗರಿ, ಸಿ.ಪಿ.ಸಿ. ಬಸವನಬಾಗೇವಾಡಿ ಪೊಲೀಸ್ ಠಾಣೆ
    17. ಶೋಭಾ ಯಮನಪ್ಪ ಹರಿಜನ, ಡಬ್ಲ್ಯುಪಿಸಿ, ಬಸವನಬಾಗೇವಾಡಿ ಪೊಲೀಸ್ ಠಾಣೆ
    18. ಡಿ.ಆರ್. ಪಾಟೀಲ, ಎ.ಇ. ಲೋಕೋಪಯೋಗಿ ಇಲಾಖೆ, ಬಸವನಬಾಗೇವಾಡಿ
    19. ಎಚ್.ಎಸ್. ಸೋಲಾಪುರ, ಸಿ.ಎಚ್.ಸಿ., ಕರ್ನಾಟಕ ಲೋಕಾಯುಕ್ತ, ಬಾಗಲಕೋಟೆ
    20. ಬಿ.ಎಂ. ಅಮಕುಲಿ, ಸಿ.ಎಚ್.ಸಿ., ಕರ್ನಾಟಕ ಲೋಕಾಯುಕ್ತ, ಬಾಗಲಕೋಟೆ
    21. ಐ.ಎಂ. ದುಂಡಸಿ, ಸಿಪಿಸಿ, ಕರ್ನಾಟಕ ಲೋಕಾಯುಕ್ತ, ಬಾಗಲಕೋಟೆ
    22. ಜಿ.ಎ. ಹಡಪದ, ಸಿಪಿಸಿ, ವಿಜಾಪುರ
    23. ಎಸ್.ಎಮ್. ಅಕಳವಾಡಿ, ಎ.ಪಿ.ಸಿ., ಕರ್ನಾಟಕ ಲೋಕಾಯುಕ್ತ, ಬಾಗಲಕೋಟೆ.

8. ಲಂಚ ಕೇಳಲು ಆಧಾರವಾದ ಕಡತ ಅಥವಾ ದಾಖಲೆಗಳ ಸಂಖ್ಯೆ: 27 ಪೊಲೀಸ್ ಠಾಣೆ ಮೊಕದ್ದಮೆ ಸಂಖ್ಯೆ: 152/07.

ತನಿಖಾಧಿಕಾರಿಗಳಾದ ಶ್ರೀ ಎಸ್.ಎಫ್. ಕಮ್ಮಾರ, ಡಿವೈ.ಎಸ್.ಪಿ. ಕರ್ನಾಟಕ ಲೋಕಾಯುಕ್ತ, ಬಾಗಲಕೋಟೆ ಇವರು ಶ್ರೀ ಬಿ.ವೈ. ಬೆಳ್ಳುಬ್ಬಿ, ಡಿವೈ.ಎಸ್.ಪಿ. ರವರ ವಿರುದ್ಧ ದಂಡಾರ್ಹ ಪ್ರಕರಣವನ್ನು 8/07, ಕರ್ನಾಟಕ ಲೋಕಾಯುಕ್ತ, ಬಸವನಬಾಗೇವಾಡಿ ಪೊಲೀಸ್ ಠಾಣೆ ಗುನ್ನೆ ಸಂಖ್ಯೆ: 8/07ರಲ್ಲಿ ಲಂಚ ನಿರೋಧಕ ಕಾಯಿದೆ 1988ರ ಕಲಂ 7, 13(1)(ಡಿ) ಜೊತೆಯಲ್ಲಿ ಓದಲಾದ 13(2)ರ ಅಡಿಯಲ್ಲಿ ದಾಖಲಿಸಿಕೊಂಡಿರುತ್ತಾರೆ.

ಆಪಾದಿತರಾದ ಶ್ರೀ ಬಿ.ವೈ. ಬೆಳ್ಳುಬ್ಬಿ, ಡಿವೈ.ಎಸ್.ಪಿ. ರವರು ಫಿರ್ಯಾದಿಯಾದ ಶ್ರೀ ಮಹದೇವಪ್ಪ ಕೆಂಚಪ್ಪ ಓರೇ ಕುರುಬರ ಕಣಕಾಲ, ಬಸವನಬಾಗೇವಾಡಿ ಇವರ ಸಂಬಂಧಿಕರ ಮೇಲೆ ಕೊಟ್ಟಿದ್ದ ಪ್ರಕರಣದಲ್ಲಿ ಇಬ್ಬರು ಹೆಣ್ಣು ಮಕ್ಕಳ ಹೆಸರನ್ನು ಕೇಸಿನಿಂದ ತೆಗೆಯಿಸುವ ಕೆಲಸವನ್ನು ಮಾಡಲು ರೂ. 20,000/-ಗಳ ಅಕ್ರಮ ಸಂಭಾವನೆಯನ್ನು ಕೇಳಿರುತ್ತಾರೆ. ಫಿರ್ಯಾದಿಯು ಲಂಚವನ್ನು ಕೊಡಲು ಬಯಸದ ಕಾರಣ ಸದರಿ ಸಾರ್ವಜನಿಕ ಅಧಿಕಾರಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ದೂರನ್ನು ಸಲ್ಲಿಸಿದ್ದು ಇರುತ್ತದೆ. ಸದರಿ ದೂರಿನಂತೆ ತನಿಖಾಧಿಕಾರಿಗಳು ಬಲೆ ಬೀಸುವ ಮೊದಲಿನ ಎಲ್ಲಾ ಔಚಿತ್ಯಪೂರ್ಣ ಕಾರ್ಯಕ್ರಮಗಳನ್ನು ನೆರವೇರಿಸಿದ ನಂತರ ದಿನಾಂಕ 25-10-2007ರಂದು ಬಸವನಬಾಗೇವಾಡಿ ಪೊಲೀಸ್ ಠಾಣೆ, ಡಿವೈ.ಎಸ್.ಪಿ. ಕಾರ್ಯಾಲಯದಲ್ಲಿ ಬೀಸಿದ ಟ್ರ್ಯಾಪ್ ಪ್ರಕರಣ ಯಶಸ್ವಿಯಾಗಿ ಶ್ರೀ ಬಿ.ವೈ. ಬೆಳ್ಳುಬ್ಬಿ, ಡಿವೈ.ಎಸ್.ಪಿ., ಅಕ್ರಮ ಸಂಭಾವನೆಯಾದ 20,000/- ರೂ.ಗಳನ್ನು ಸದರಿ ಸರ್ಕಾರಿ ಕೆಲಸವನ್ನು ಮಾಡಲು ಕೇಳಿ ಪಡೆಯುತ್ತಿದ್ದಾಗ ಸಿಕ್ಕಿಹಾಕಿಕೊಂಡಿರುತ್ತಾರೆ. ಆಪಾದಿತ ಸಾರ್ವಜನಿಕ ಅಧಿಕಾರಿಯ ಬಲಗೈ ಮತ್ತು ಎಡಗೈ ಬೆರಳುಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಮಾರ್ಜನೆ ಮಾಡಿ ಫಿನಾಫ್ತಲೀನ್ ಪರೀಕ್ಷೆಗೆ ಒಳಪಡಿಸಿದಾಗ ಅದು ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದ್ದು, ರಾಸಾಯನಿಕ ತಜ್ಞರ ಪರೀಕ್ಷಣಾ ವರದಿಯಿಂದಲೂ ಸಹ ಧೃಢಪಟ್ಟಿರುತ್ತದೆ. ನೆರಳು ಸಾಕ್ಷಿಯು ಅಕ್ರಮ ಸಂಭಾವನೆಯ ಬೇಡಿಕೆ ಮತ್ತು ಪಡೆಯುವಿಕೆಗೆ ಸಂಬಂಧಿಸಿದಂತೆ ಫಿರ್ಯಾದಿ ಹಾಗೂ ಆಪಾದಿತ ಸಾರ್ವಜನಿಕ ಅಧಿಕಾರಿ ನಡುವಿನ ವ್ಯವಹಾರವನ್ನು ಗಮನಿಸಿರುತ್ತಾರೆ. ಮತ್ತು ಸಂಭಾಷಣೆಯನ್ನು ಆಲಿಸಿರುತ್ತಾರೆ. ಅಕ್ರಮ ಸಂಭಾವನೆಯಾದ ರೂ. 20,000/-ಗಳನ್ನು ಶ್ರೀ ಬಿ.ವೈ. ಬೆಳ್ಳುಬ್ಬಿ ರವರಿಂದ ಬಸವನಬಾಗೇವಾಡಿ ಪೊಲೀಸ್ ಠಾಣೆ, ಡಿವೈ.ಎಸ್.ಪಿ., ಕಾರ್ಯ ಸ್ಥಳದಲ್ಲಿ ಪಂಚರ ಸಮಕ್ಷಮ ವಶಪಡಿಸಿಕೊಳ್ಳಲಾಗಿದೆ.

ತನಿಖಾ ಕಾಲದಲ್ಲಿ ಸಂಗ್ರಹಿಸಲಾದ ದಾಖಲೆಗಳನ್ನು ಹಾಗೂ ಸಾಕ್ಷಿದಾರರ ಹೇಳಿಕೆಗಳನ್ನು ಗಮನಿಸಿ ಆರೋಪಿತ ಅಧಿಕಾರಿಗಳ ವಿರುದ್ಧ ಮಾಡಲಾಗಿರುವ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗುವ ಬಗ್ಗೆ ಪೂರಕ ಅಂಶಗಳಿರುವುದರಿಂದ ಈ ಎಲ್ಲಾ ಕಾರಣಗಳಿಂದ ಆಪಾದಿತರು ಲಂಚ ನಿರೋಧ ಕಾಯ್ದೆ-1988ರ ಕಲಂ 7, 13(1)(ಡಿ) ಜೊತೆಯಲ್ಲಿ ಓದಲಾದ 13(2)ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುವುದು ಮೇಲ್ನೋಟಕ್ಕೆ ಸರ್ಕಾರಕ್ಕೆ ಸಂಪೂರ್ಣವಾಗಿ ಮನವರಿಕೆಯಾಗಿದೆ. ಆದ್ದರಿಂದ ಇವರನ್ನು ಲಂಚ ನಿರೋಧ ಕಾಯ್ದೆ, 1988ರ ಕಲಂ 7, 13(ಸಿ) ಜೊತೆಯಲ್ಲಿ ಓದಲಾದ 13(2)ರ ಅಡಿಯಲ್ಲಿ ಅಭಿಯೋಜನೆಗೆ ಒಳಪಡಿಸುವುದು ಅವಶ್ಯ ಎಂದು ಸರ್ಕಾರವು ಮನಗಂಡಿದೆ.

ಸಕ್ಷಮ ಪ್ರಾಧಿಕಾರವಾದ ಸರ್ಕಾರವು ಆಪಾದಿತರನ್ನು ಕೆಲಸದಿಂದ ತೆಗೆದು ಹಾಕಲು ಅಧಿಕಾರವುಳ್ಳದ್ದಾಗಿರುತ್ತದೆ. ಆದ್ದರಿಂದ ಲಂಚ ನಿರೋಧಕ ಕಾಯಿದೆ 1988ರ ಕಲಂ 19ರನ್ವಯ ಆಪಾದಿತ ಸಾರ್ವಜನಿಕ ಅಧಿಕಾರಿ ಶ್ರೀ ಬಿ.ವೈ. ಬೆಳ್ಳುಬ್ಬಿ, ಡಿವೈ.ಎಸ್.ಪಿ, ರವರನ್ನು ಕಲಂ 7 ಮತ್ತು 13(ಸಿ) ಜೊತೆಗೆ ಓದಲಾದ 13(2)ರ ಅಡಿಯಲ್ಲಿ ಅಭಿಯೋಜನೆಗೆ ಒಳಪಡಿಸಲು, ಮಂಜೂರಾತಿ ನೀಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ. ಅದರಂತೆ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 410 ಪೊಸಿಪ 2007, ಬೆಂಗಳೂರು, ದಿನಾಂಕ: 20ನೇ ಫೆಬ್ರವರಿ 2009

ಭ್ರಷ್ಟಾಚಾರ ನಿರ್ಮೂಲನಾ ಕಾಯಿದೆ 1988ರ ಕಲಂ 19(1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರವು ಶ್ರೀ ಬಿ.ವೈ. ಬೆಳ್ಳುಬ್ಬಿ, ಡಿವೈ.ಎಸ್.ಪಿ., ಬಸವನಬಾಗೇವಾಡಿ, ಬಿಜಾಪುರ ಇವರನ್ನು ಸದರಿ ಕಾಯಿದೆ ಕಲಂ 7, 13(1)(ಸಿ) ಜೊತೆಯಲ್ಲಿ ಓದಲಾದ ಕಲಂ 13(2) ರನ್ವಯ ಮೇಲೆ ಹೇಳಿದ ಆರೋಪಕ್ಕಾಗಿ ಸಕ್ಷಮ ನ್ಯಾಯಾಲಯದಲ್ಲಿ ಅಭಿಯೋಜನೆಗೆ ಒಳಪಡಿಸಲು ಲೋಕಾಯುಕ್ತ ಪೊಲೀಸರಿಗೆ ಈ ಮೂಲಕ ಮಂಜೂರಾತಿಯನ್ನು ನೀಡುತ್ತದೆ.

ಕರ್ನಾಟಕ ಸರ್ಕಾರದ (ವ್ಯವಹಾರ ನಿರ್ವಹಣೆ) ನಿಯಮಾವಳಿಗಳು, 1977ರ ನಿಯಮ 19ರನ್ವಯ ಸರ್ಕಾರದ ಪರವಾಗಿ ಹೊರಡಿಸಲಾಗುವ ಆದೇಶಕ್ಕೆ ಸಹಿ ಮಾಡಲು ಈ ಕೆಳಕಂಡ ಪ್ರಾಧಿಕಾರಿಯು ಅಧಿಕಾರ ಹೊಂದಿದ್ದಾರೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.738

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ವಿಷಯ : ಶ್ರೀ ಆರ್. ನಾರಾಯಣಪ್ಪ, ನಿವೃತ್ತ ಡಿವೈ.ಎಸ್.ಪಿ. (ಎಫ್.ಪಿ.ಬಿ) ರವರ ಹಿಂದಿನ ಸೇವೆಯನ್ನು ನಿವೃತ್ತಿ ವೇತನಕ್ಕಾಗಿ ಪರಿಗಣಿಸುವ ಬಗ್ಗೆ.

ಓದಲಾಗಿದೆ: ಪೊಲೀಸ್ ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು ರವರ ಪತ್ರ ಸಂಖ್ಯೆ: ಸಿಬಿ4:83:08-09, ದಿನಾಂಕ 15-9-2008.

ಪ್ರಸ್ತಾವನೆ :

ಮೇಲೆ ಓದಲಾದ ಪತ್ರದಲ್ಲಿ ಶ್ರೀ ಆರ್. ನಾರಾಯಣಪ್ಪ, ನಿವೃತ್ತ ಡಿವೈ.ಎಸ್.ಪಿ. (ಎಫ್.ಪಿಬಿ) ಈಶಾನ್ಯ ವಲಯ, ಗುಲ್ಬರ್ಗಾ ರವರು ಪೊಲೀಸ್ ಇಲಾಖೆಯಲ್ಲಿ ಸೇವೆಗೆ ಸೇರುವುದಕ್ಕೆ ಮೊದಲು ಅಂದರೆ ದಿನಾಂಕ 26-5-1977 ರಿಂದ ದಿನಾಂಕ 3-11-1977ರ ವರೆಗೆ ಪ್ರೌಢ ಶಿಕ್ಷಣ ಮತ್ತು ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಪ್ರಥಮ ದರ್ಜೆ ಸಹಾಯಕರಾಗಿ ಸಲ್ಲಿಸಿದ್ದು, ಸದರಿ ಸೇವೆಯಿಂದ ದಿನಾಂಕ 4-11-1977ರಂದು ಬಿಡುಗಡೆಗೊಂಡು ಪೊಲೀಸ್ ಇಲಾಖೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. ಶ್ರೀಯುತರು ಪ್ರೌಢ ಶಿಕ್ಷಣ ಮತ್ತು ಕಾಲೇಜು ಶಿಕ್ಷಣ ಇಲಾಖೆಯಿಂದ ಬಿಡುಗಡೆ ಹೊಂದಿ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯಕ್ಕೆ ಹಾಜರಾಗಿರುವುದರಿಂದ ಕೆ.ಸಿ.ಎಸ್.ಆರ್. ನಿಯಮ 224(ಎ)ರ ಪ್ರಕಾರ ದಿನಾಂಕ 26-5-1977 ರಿಂದ 3-11-1977ರ ವರೆಗೆ ಶಿಕ್ಷಣ ಇಲಾಖೆಯಲ್ಲಿ ಸಲ್ಲಿಸಿದ ಸೇವೆಯನ್ನು ಸದರಿಯವರ ನಿವೃತ್ತಿ ವೇತನ ಸೌಲಭ್ಯಗಳಿಗೆ ಅರ್ಹತಾದಾಯಕ ಸೇವೆ ಎಂದು ಪರಿಗಣಿಸಲು ಪೊಲೀಸ್ ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು ರವರು ಕೋರಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ಒಇ 353 ಪೊಸಿಪ 2008, ಬೆಂಗಳೂರು, ದಿನಾಂಕ: 5ನೇ ಮಾರ್ಚ್ 2009

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಶ್ರೀ ಆರ್. ನಾರಾಯಣಪ್ಪ, ನಿವೃತ್ತ ಡಿವೈ.ಎಸ್.ಪಿ. ರವರು 26-5-1977 ರಿಂದ ದಿನಾಂಕ 3-11-1977ರ ವರೆಗೆ ಪ್ರೌಢ ಶಿಕ್ಷಣ ಮತ್ತು ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಪ್ರಥಮ ದರ್ಜೆ ಸಹಾಯಕರಾಗಿ ಸಲ್ಲಿಸಿದ ಸೇವೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು ನಿಯಮ 224ಎ ರ ಪ್ರಕಾರ ನಿವೃತ್ತಿ ಸೌಲಭ್ಯಗಳಿಗೆ ಅರ್ಹತದಾಯಕ ಸೇವೆ ಎಂದು ಪರಿಗಣಿಸಿ ಆದೇಶಿಸಿದೆ. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 896 ವೆಚ್ಚ-6:08 ದಿನಾಂಕ 6-12-2008ರಲ್ಲಿನ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.841 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ

ವಿಷಯ : ಡಾ: ಟಿ. ಅನ್ನಪೂರ್ಣ, ಹಿಂದಿನ ಆಡಳಿತಾಧಿಕಾರಿ, ಬಾಲಭವನ ಸೊಸೈಟಿ, ಬೆಂಗಳೂರು ಪ್ರಸ್ತುತ ಅಂಗವಿಕಲರ ಕಲ್ಯಾಣಾಧಿಕಾರಿ, ಬೆಂಗಳೂರು (ಗ್ರಾ), ಇವರು ಅಮಾನತ್ತಿನಲ್ಲಿ ಕಳೆದ ಅವಧಿಗೆ ಅವರ ಹಕ್ಕಿನಲ್ಲಿರುವ ರಜೆ ಮಂಜೂರು ಮಾಡುವ ಬಗ್ಗೆ – ಆದೇಶ.

ಓದಲಾಗಿದೆ:

1. ಶ್ರೀ ಡಿ. ರಾಜಶೇಖರ ರೆಡ್ಡಿ, ನಂ. 2082, 11ನೇ ಅಡ್ಡ ರಸ್ತೆ, 2ನೇ ಮುಖ್ಯರಸ್ತೆ, ವಸಂತ ನಗರ, ಬೆಂಗಳೂರು ಇವರು ದಿ: 10-5-2007 ರಂದು ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಅಧ್ಯಕ್ಷರು, ಬಾಲಭವನ ಸೊಸೈಟಿ, ಬೆಂಗಳೂರು ಇವರಿಗೆ ನೀಡಿರುವ ದೂರು.
2. ಸರ್ಕಾರದ ಆದೇಶ ಸಂಖ್ಯೆ: ಮಮಇ 280 ಎಸ್‌ಜೆಡಿ 2007, ದಿ: 11-7-2007.
3. ಸರ್ಕಾರದ ಆದೇಶ ಸಂಖ್ಯೆ: ಮಮಇ 280 ಎಸ್‌ಜೆಡಿ 2007, ದಿ: 25-8-2007.
4. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ: ಮಮಇ 280 ಎಸ್‌ಜೆಡಿ 2007, ದಿ: 28-9-2007.
5. ಸರ್ಕಾರದ ಆದೇಶ ಸಂಖ್ಯೆ: ಮಮಇ 280 ಎಸ್‌ಜೆಡಿ 2007, ದಿ: 20-3-2008.
6. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಪತ್ರ ಸಂಖ್ಯೆ: ನಿಸಿಪಿಪ/10/07-08, ದಿ: 22-4-2008.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿ: 10-5-2007ರ ಪತ್ರದಲ್ಲಿ ಶ್ರೀ ರಾಜಶೇಖರ್ ರೆಡ್ಡಿ, ಬೆಂಗಳೂರು ಇವರು ಡಾ: ಅನ್ನಪೂರ್ಣ, ಆಡಳಿತಾಧಿಕಾರಿ, ಜವಾಹರ ಬಾಲಭವನ ಸೊಸೈಟಿ, ಬೆಂಗಳೂರು ಇವರ ಕಾರ್ಯವೈಖರಿಯ ವಿರುದ್ಧ ದೂರು ನೀಡಿ, ಸದರಿಯವರು ಸಾರ್ವಜನಿಕರೊಂದಿಗೆ ಸರಿಯಾಗಿ ವರ್ತಿಸುತ್ತಿಲ್ಲವೆಂದು ಹಾಗೂ ಬಾಲಭವನದ

ವಾಹನವನ್ನು ದುರುಪಯೋಗ ಪಡಿಸುತ್ತಿರುವುದಾಗಿ ತಿಳಿಸಿರುತ್ತಾರೆ. ಈ ಬಗ್ಗೆ ಡಾ: ಟಿ. ಅನ್ನಪೂರ್ಣರವರಿಗೆ ಓ: 1-6-2007 ರಂದು ನೋಟೀಸ್ ನೀಡಲಾಗಿದ್ದು, ಅದಕ್ಕೆ ಪ್ರತಿಯಾಗಿ ಡಾ: ಟಿ. ಅನ್ನಪೂರ್ಣರವರು ದಿ: 3-6-2007 ರಂದು ನೀಡಿರುವ ತಮ್ಮ ವಿವರಣೆಯಲ್ಲಿ ದಿ: 10-5-2007 ರಂದು ಕಾರ್ಯದರ್ಶಿಗಳು ಬಾಲಭವನ ಸೊಸೈಟಿ ಇವರೊಡನೆ ಸ್ಥಳ ಭೇಟಿ ಮಾಡಲು ಹೋಗಿದ್ದುದ್ದಾಗಿ ಸುಳ್ಳು ವರದಿ ಮಾಡಿರುವುದು ಹಾಗೂ ವಾಹನವನ್ನು ಅವರ ಸ್ವಂತ ಕೆಲಸ ಕಾರ್ಯಗಳಿಗೆ ಉಪಯೋಗಿಸಿರುವುದು ಕಂಡು ಬಂದಿರುವ ಹಿನ್ನೆಲೆಯಲ್ಲಿ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿ: 11-7-2007ರ ಆದೇಶದಲ್ಲಿ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು 1957ರ ನಿಯಮ 10(1)(ಎ) ರನ್ವಯ ಅಮಾನತ್ತಿನಲ್ಲಿಡಲಾಗಿತ್ತು.

ಮೇಲೆ (3)ರಲ್ಲಿ ಓದಲಾದ ದಿ: 25-8-2007ರ ಆದೇಶದಲ್ಲಿ ಡಾ: ಟಿ. ಅನ್ನಪೂರ್ಣ ಅವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿಯಿರಿಸಿ ಅವರನ್ನು ಅಮಾನತ್ತಿನಿಂದ ತೆರವುಗೊಳಿಸಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಂಗವಿಕಲರ ಕಲ್ಯಾಣಾಧಿಕಾರಿ ಹುದ್ದೆಗೆ ನಿಯೋಜಿಸಿ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಿದೆ.

ಮೇಲೆ (4)ರಲ್ಲಿ ಓದಲಾದ ದಿ: 28-9-2007ರಂದು ಆರೋಪಣಾ ಪಟ್ಟಿಯನ್ನು (ಅನುಬಂಧ 1-4 ರೊಂದಿಗೆ) ಕಾರಣ ಕೇಳುವ ನೋಟೀಸನ್ನು ಡಾ: ಟಿ. ಅನ್ನಪೂರ್ಣ ರವರಿಗೆ ಜಾರಿ ಮಾಡಲಾಗಿತ್ತು.

ಮೇಲೆ (5)ರಲ್ಲಿ ಓದಲಾದ ದಿ: 20-3-2008ರ ಆದೇಶದಲ್ಲಿ ಡಾ: ಟಿ. ಅನ್ನಪೂರ್ಣ ಹಿಂದಿನ ಆಡಳಿತಾಧಿಕಾರಿ, ಬಾಲಭವನ ಸೊಸೈಟಿ, ಬೆಂಗಳೂರು ಹಾಲಿ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಇವರಿಗೆ ದಿ: 28-9-2007ರಂದು ಜಾರಿ ಮಾಡಿರುವ ಕಾರಣ ಕೇಳುವ ನೋಟೀಸನ್ನು ಹಿಂಪಡೆದು ಇನ್ನು ಮುಂದೆ ಇಂತಹ ಘಟನೆಗಳಿಗೆ ಆಸ್ಪದ ನೀಡದಂತೆ ಅವರಿಗೆ ಆಡಳಿತಾತ್ಮಕ ಎಚ್ಚರಿಕೆಯನ್ನು ನೀಡಿದೆ.

ಮೇಲೆ ಕ್ರಮ ಸಂಖ್ಯೆ (6)ರಲ್ಲಿ ಓದಲಾದ ದಿ: 22-4-2008ರ ಪತ್ರದಲ್ಲಿ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ರವರು ಡಾ: ಟಿ. ಅನ್ನಪೂರ್ಣ, ಹಿಂದಿನ ಆಡಳಿತಾಧಿಕಾರಿ, ಬಾಲಭವನ ಇವರನ್ನು ಸರ್ಕಾರವು ಆದೇಶ ಸಂಖ್ಯೆ: ಮಮಇ 280 ಎಸ್‌ಜೆಡಿ 2007, ದಿ: 20-3-2008ರಲ್ಲಿ ಇವರ ವಿರುದ್ಧದ ಇಲಾಖಾ ವಿಚಾರಣೆಯಿಂದ ದೋಷಮುಕ್ತಗೊಳಿಸಿ ಆದೇಶ ಹೊರಡಿಸಲಾಗಿದೆಯೆಂದು ಆದರೆ ಸದರಿಯವರ ಅಮಾನತ್ತು ಅವಧಿ ಪರಿಗಣನೆಯ ಬಗ್ಗೆ ಯಾವುದೇ ಆದೇಶ ಆಗಿರುವುದಿಲ್ಲವೆಂದು ತಿಳಿಸುತ್ತಾ, ಸದರಿಯವರ ಅಮಾನತ್ತಿನ ಅವಧಿಯ ಪರಿಗಣನೆ ಬಗ್ಗೆ ಸೂಕ್ತ ಆದೇಶ ನೀಡುವಂತೆ ಕೋರಿರುತ್ತಾರೆ. ಸರ್ಕಾರವು ನಿರ್ದೇಶಕರ ಪತ್ರವನ್ನು ಕೂಲಂಕಷವಾಗಿ ಪರಿಗಣಿಸಿದೆ. ಡಾ: ಅನ್ನಪೂರ್ಣ ಹಿಂದಿನ ಆಡಳಿತಾಧಿಕಾರಿ, ಬಾಲಭವನ ಸೊಸೈಟಿ, ಅವರಿಗೆ "ಆಡಳಿತಾತ್ಮಕ ಎಚ್ಚರಿಕೆ" ನೀಡಿದ್ದು, ಅವರನ್ನು ಪೂರ್ಣವಾಗಿ ದೋಷಮುಕ್ತಗೊಳಿಸಿರುವುದಿಲ್ಲವಾದ್ದರಿಂದ ಅವರು ದಿ: 11-7-2007 ರಿಂದ 26-8-2007 ರವರೆಗಿನ ಅವಧಿಗೆ ಅವರ ಹಕ್ಕಿನಲ್ಲಿರುವ ರಜೆಯೆಂದು ಮಂಜೂರು ಮಾಡಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಮಮಇ 349 ಎಸ್‌ಜೆಡಿ 2007, ಬೆಂಗಳೂರು, ದಿನಾಂಕ: 25ನೇ ಜೂನ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಡಾ: ಟಿ. ಅನ್ನಪೂರ್ಣ, ಹಿಂದಿನ ಆಡಳಿತಾಧಿಕಾರಿ, ಬಾಲಭವನ ಸೊಸೈಟಿ, ಬೆಂಗಳೂರು, ಹಾಲಿ ಸಂಶೋಧನಾಧಿಕಾರಿ, ಪ್ರಧಾನ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು, ಇವರು ದಿ: 11-7-2007 ರಿಂದ 26-8-2007 ರವರೆಗೆ ಅಮಾನತ್ತಿನಲ್ಲಿ ಕಳೆದ ಅವಧಿಗೆ ಅವರ ಹಕ್ಕಿನಲ್ಲಿರುವ ರಜೆಯನ್ನು ಮಂಜೂರು ಮಾಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.1139

ಆರ್.ಎಂ. ಚಂದ್ರಮ್ಮ

ಸರ್ಕಾರದ ಅಧೀನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಎಂ.ಎನ್. ನರಸಿಂಹಮೂರ್ತಿ, ಸಿ.ಪಿ.ಸಿ., ವಂಚನೆ ತನಿಖಾದಳ, ಸಿ.ಓ.ಡಿ., ಬೆಂಗಳೂರು, ರವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರಿ ಹಾಗೂ ಆರಕ್ಷಕ ಉಪ ನಿರೀಕ್ಷಕರು, ಸಿಓಡಿ, ಬೆಂಗಳೂರು ಇವರ ಆದೇಶ ಸಂಖ್ಯೆ:20/ಸಿಬ್ಬಂದಿ-3/ಡಿಇ/ಸಿಓಡಿ/2008-09 ದಿನಾಂಕ:10-06-2008.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಸಿಓಡಿ, ಬೆಂಗಳೂರು, ಇವರ ಆದೇಶ ಸಂಖ್ಯೆ:20/ಸಿಬ್ಬಂದಿ-3/ಡಿಇ/ಸಿಓಡಿ/2008-09 ದಿನಾಂಕ:23-08-2008.

3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:05-09-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)76/2008-09, ದಿನಾಂಕ:04-12-08

ಪ್ರಸ್ತಾವನೆ:

ಶ್ರೀ ಎಂ.ಎನ್. ನರಸಿಂಹಮೂರ್ತಿ, ಸಿ.ಪಿ.ಸಿ., ವಂಚನೆ ತನಿಖಾದಳ, ಸಿ.ಓ.ಡಿ., ಬೆಂಗಳೂರು, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷರೋಪಣೆ:

"ಶ್ರೀ ಎಂ.ಎನ್. ನರಸಿಂಹಮೂರ್ತಿ, ಸಿ.ಪಿ.ಸಿ., ವಂಚನೆ ತನಿಖಾದಳ, ಆದ ನೀವು ನಿಮ್ಮ ದಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಸುರೇಶ್ ಕುಮಾರ್, ಜ್ಯೂನಿಯರ್ ಆಡಿಟರ್, ರವರನ್ನು ಕಬ್ಬನ್ ಪಾರ್ಕ್ ಪೊಲೀಸ್ ಠಾಣೆ ಮೊ.ಸಂ:203/2004 ಕಲಂ 408-420 ಐಪಿಸಿ ಪ್ರಕರಣದಲ್ಲಿ ಹಣ ದುರುಪಯೋಗವಾಗಿರುವ ಬಗ್ಗೆ ದಾಖಲೆಗಳನ್ನು ಪರಿಶೀಲಿಸಿ, ಲೆಕ್ಕ ಪರಿಶೋದನೆ ನಡೆಸಲು ವಂಚನೆ ತನಿಖಾ ದಳದ ಕರ್ತವ್ಯದಿಂದ ದಿನಾಂಕ: 08-01-07 ರಂದು ಬಿಡುಗಡೆ ಗೊಳಿಸಿ ಎಸ್.ಪಿ. ವಿಶೇಷ ವಿಚಾರಣೆ ದಳ ರವರಲ್ಲಿ ವರದಿ ಮಾಡಿಕೊಳ್ಳುವಂತೆ ಸೂಚಿಸಿದ್ದರೂ ಸಹ ನೀವು ನೈಜತೆಯನ್ನು ಪರಿಶೀಲಿಸದೆ ಹಾಜರಾತಿ ಪುಸ್ತಕದಲ್ಲಿ ಅವರ ಹೆಸರಿನ ಮುಂದೆ "ಡಿ" (ಡ್ಯೂಟಿ) ಎಂದು ನಮೂದಿಸಿ ಹಾಗೂ ದಿನವಹಿ ಹಾಜರಾತಿ ಪಟ್ಟಿಯಲ್ಲಿ ವಿಶೇಷ ವಿಚಾರಣಾ ದಳದ ಮೇಲ್ಕಂಡ ಪ್ರಕರಣದಲ್ಲಿ ಆಡಿಟ್ ಬಗ್ಗೆ ಓಓಡಿ ಕರ್ತವ್ಯ ಎಂದು ಸುಳ್ಳು ನಮೂದಿಸಿ ನಿಮ್ಮ ಕರ್ತವ್ಯದಲ್ಲಿ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವ ಬಗ್ಗೆ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಆರಕ್ಷಕ ಉಪ ನಿರೀಕ್ಷಕರು, ಸಿಓಡಿ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 10-06-2008ರ ಆದೇಶದಲ್ಲಿ ಅರ್ಜಿದಾರರ ವಾರ್ಷಿಕ ವೇತನ ಬಡ್ತಿಯನ್ನು ಆರು ತಿಂಗಳ ಕಾಲ ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ದಕ್ಕೆಯಾಗದಂತೆ ಮುಂದೂಡುವ ದಂಡನೆಯನ್ನು ವಿಧಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಸಿಓಡಿ, ಬೆಂಗಳೂರು, ಇವರ ಮೇಲ್ಮನವಿಯನ್ನು ಭಾಗಶ: ಪುರಸ್ಕರಿಸಿ, ಇವರ ವಾರ್ಷಿಕ ವೇತನ ಬಡ್ತಿಯನ್ನು 3 ತಿಂಗಳ ಕಾಲ ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ದಕ್ಕೆಯಾಗದಂತೆ ಮುಂದೂಡುವ ದಂಡನೆಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ:23-08-2008ರ ಆದೇಶದಲ್ಲಿ ವಿಧಿಸಿದ್ದಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 296 ಪೊಸಿಅ 2008 ಬೆಂಗಳೂರು, ದಿನಾಂಕ 18ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಂ.ಎನ್. ನರಸಿಂಹಮೂರ್ತಿ, ಸಿ.ಪಿ.ಸಿ., ವಂಚನೆ ತನಿಖಾದಳ, ಸಿ.ಓ.ಡಿ., ಬೆಂಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 840

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಡಿ.ಎಸ್. ಶ್ರೀಕಂಠ, ಎ.ಪಿ.ಸಿ.-36, ಡಿ.ಎ.ಆರ್. ಮಂಡ್ಯ ರವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ: 1) ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೋಲೀಸ್ ಅಧೀಕ್ಷಕರು, ಮಂಡ್ಯ, ಇವರ ಆದೇಶ ಸಂಖ್ಯೆ: ಸಿಬ್ಬಂದಿ(2)ಪಿಆರ್/35/06-07 ಓಬಿ:326/06-07 ದಿನಾಂಕ:03-02-2007.

2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೋಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರ ಆದೇಶ ಸಂಖ್ಯೆ: ಅಪೀಲು/11/2007-08 ದಿನಾಂಕ:17-09-2007.

3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:03-01-2008.

4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)120/2007-08, ದಿನಾಂಕ:06-09-2008.

ಪ್ರಸ್ತಾವನೆ:

ಶ್ರೀ ಡಿ.ಎಸ್. ಶ್ರೀಕಂಠ, ಎ.ಪಿ.ಸಿ.-36, ಡಿ.ಎ.ಆರ್. ಮಂಡ್ಯ ಜಿಲ್ಲೆ, ಇವರ ವಿರುದ್ದ ಕರ್ತವ್ಯದಲ್ಲಿ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಎಸಗಿರುವ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕಾರಣಕ್ಕಾಗಿ ಕರ್ನಾಟಕ ರಾಜ್ಯ ಪೋಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆ ಹೊರಿಸಲಾಗಿದೆ.

ದೋಷರೋಪಣೆ:

"ಮಂಡ್ಯ ಜಿಲ್ಲಾ ಸಶಸ್ತ್ರ ಮೀಸಲು ಪಡೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇವರನ್ನು ಕರ್ತವ್ಯದ ಅಧಿಕಾರಿಗಳು ದಿ:03-11-2006 ರಂದು ಮೈಸೂರಿನ ಆರೋಪಿಗೆ ಗಾರ್ಡ್ ಕೆಲಸಕ್ಕೆ ನೇಮಿಸಿದಾಗ, ಸದರಿ ಕೆಲಸಕ್ಕೆ ಹೋಗಲು ನಿರಾಕರಿಸಿರುತ್ತಾರೆ. ಈ ರೀತಿಯಾಗಿ ಇವರು ಮೇಲಾಧಿಕಾರಿಗಳ ಆದೇಶವನ್ನು ಉಲ್ಲಂಘನೆ ಮಾಡುವುದರ ಮೂಲಕ ಕರ್ತವ್ಯದಲ್ಲಿ ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಎಸಗಿರುತ್ತಾರೆ".

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೋಲೀಸ್ ಅಧೀಕ್ಷಕರು, ಮಂಡ್ಯ, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ:03-02-2007ರ ಆದೇಶದಲ್ಲಿ ಅರ್ಜಿದಾರರ ವಾರ್ಷಿಕ ವೇತನ ಬಡ್ತಿಯನ್ನು ಆರು ತಿಂಗಳು ಕಾಲ ಮುಂದಿನ ವಾರ್ಷಿಕ ವೇತನಬಡ್ತಿಗಳಿಗೆ ತೊಂದರೆಯಾಗದಂತೆ ಮುಂದೂಡುವ ದಂಡನೆಯನ್ನು ವಿಧಿಸಿದ್ದಾರೆ.

ಈ ಆದೇಶದ ವಿರುದ್ದ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೋಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ:17-09-07ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸ ಬಹುದಾದಂತಹ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 85 ಪೊಸಿಅ 2008 ಬೆಂಗಳೂರು, ದಿನಾಂಕ 17ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಡಿ.ಎಸ್. ಶ್ರೀಕಂಠ, ಎ.ಪಿ.ಸಿ.-36, ಡಿ.ಎ.ಆರ್. ಮಂಡ್ಯ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.839

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಜಿ. ವೆಂಕಟಪ್ಪ, ಸಿ.ಪಿ.ಸಿ.-112, ಸಿ.ಎಸ್.ಪುರ ಪೊಲೀಸ್ ಠಾಣೆ, ತುಮಕೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ: 1) ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ತುಮಕೂರು ಜಿಲ್ಲೆ ಇವರ ಆದೇಶ ಸಂಖ್ಯೆ: ಪನ್ನಿ/ಡಿಇ/10/ 2007-08 ಓ.ಬಿ:393/2007 ದಿ:16-08-07.

2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರ ಆದೇಶ ಸಂಖ್ಯೆ:ಅಪೀಲು31/2007-08 ಓ.ಬಿ:183 ದಿನಾಂಕ:12-02-2008.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:08-08-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)55/2008-09, ದಿನಾಂಕ:20-10-08.

ಪ್ರಸ್ತಾವನೆ:

ಶ್ರೀ ಜಿ. ವೆಂಕಟಪ್ಪ, ಸಿ.ಪಿ.ಸಿ.-112, ಸಿ.ಎಸ್.ಪುರ ಪೊಲೀಸ್ ಠಾಣೆ, ತುಮಕೂರು ಜಿಲ್ಲೆ, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಅನಧಿಕೃತ ಗೈರುಹಾಜರಾದ ಕಾರಣದ ಮೇಲೆ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:

"ನೀವು ದಿ:21-09-2005 ರಂದು ವೈದ್ಯಕೀಯ ಚಿಕಿತ್ಸೆಗಾಗಿ ಎಂ.ಎಚ್.ಎಸ್.ಅನ್ನು ಪಡೆದುಕೊಂಡು ಹೋಗಿದ್ದು, ಯಾವ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದೀರಿ ಎಂಬ ಬಗ್ಗೆ ಯಾವುದೇ ಮಾಹಿತಿಯನ್ನು ನೀಡಿರುವುದಿಲ್ಲ. ಕೇಂದ್ರಸ್ಥಾನವನ್ನು ಬಿಟ್ಟು ಹೋಗಲು ಯಾವುದೇ ಪೂರ್ವಾನುಮತಿಯನ್ನು ಪಡೆದಿರುವುದಿಲ್ಲ. ನೀವು ಸಲ್ಲಿಸಿರುವ ವೈದ್ಯಕೀಯ ಪ್ರಮಾಣ ಪತ್ರಗಳನ್ನು ಪರಿಶೀಲಿಸಲಾಗಿ ನೀವು ಹೊರ ರೋಗಿಯಾಗಿ ಚಿಕಿತ್ಸೆ ಪಡೆದಂತೆ ಇರುತ್ತದೆ. ನೀವು ಚಿಕಿತ್ಸೆ ಪಡೆಯುತ್ತಿರುವ ಬಗ್ಗೆ ನಿಮ್ಮ ಮೇಲಾಧಿಕಾರಿಗಳಿಗೆ ತಿಳಿಸಲು ಯಾವುದೇ ಅಡ್ಡಿ ಆತಂಕಗಳು ಇರಲಿಲ್ಲ. ನೀವು ಎನ್.ಇ.ಪಿ.ಎಸ್. ಮೊ.ಸಂ.191/2005 ಕಲಂ 341-506-307 ರೆ/ವಿ 34 ಐ.ಪಿ.ಸಿ. ಪ್ರಕರಣದಲ್ಲಿ ಆರೋಪಿಯಾಗಿದ್ದು, ದಸ್ತಗಿರಿ ಆಗದಂತೆ ತಪ್ಪಿಸಿಕೊಳ್ಳಲು ಅನಾರೋಗ್ಯದ ನೆಪವೊಡ್ಡಿರುವುದು ಕಂಡು ಬರುತ್ತದೆ. ಆದುದರಿಂದ ನೀವು ದಿ:21-09-2005 ರಿಂದ 25-06-06 ರವರೆಗೆ ಗೈರುಹಾಜರಾಗಿ ನಿಮ್ಮ ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ತೋರಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ತುಮಕೂರು, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 16-08-07ರ ಆದೇಶದಲ್ಲಿ ಅರ್ಜಿದಾರರಿಗೆ ದಿ:21-09-2005 ರಿಂದ 25-06-06 ರವರೆಗಿನ ಅವಧಿಯನ್ನು ವೇತನರಹಿತ ರಜೆ ಎಂದು ಪರಿಗಣಿಸಿ ಆದೇಶಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ:16-08-2007ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 248 ಪೊಸಿಅ 2008 ಬೆಂಗಳೂರು, ದಿನಾಂಕ 20ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಜಿ. ವೆಂಕಟಪ್ಪ, ಸಿ.ಪಿ.ಸಿ.-112, ಸಿ.ಎಸ್.ಪುರ ಪೊಲೀಸ್ ಠಾಣೆ, ತುಮಕೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.838

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಗುಂಡಪ್ಪ, ಎ.ಎಸ್.ಐ. ಬಸವನಹಳ್ಳಿ ಪೊಲೀಸ್ ಠಾಣೆ, ತುಮಕೂರು, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ತುಮಕೂರು, ಇವರ ಆದೇಶ ಸಂಖ್ಯೆ: ಪಸ್ಸಿ/82/2007-08 ಓಬಿ:36/2008, ದಿ:14-01-2008.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರ ಆದೇಶ ಸಂಖ್ಯೆ:ಅಪೀಲು6/2007-08 ಓ.ಬಿ:35/2008-09 ದಿನಾಂಕ:28-05-2008.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:14-08-2009.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)58/2008-09, ದಿನಾಂಕ:23-10-08

ಪ್ರಸ್ತಾವನೆ:

ಶ್ರೀ ಗುಂಡಪ್ಪ, ಎ.ಎಸ್.ಐ. ಬಸವನಹಳ್ಳಿ ಪೊಲೀಸ್ ಠಾಣೆ, ತುಮಕೂರು, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನವನ್ನು ತೋರಿಸಿದ ಹಿನ್ನೆಲೆಯಲ್ಲಿ ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿಯಲ್ಲಿ ಈ ಕೆಳಕಂಡ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷರೋಪಣೆ:

"ಗೌರಿಬಿದನೂರು ಮತ್ತು ಹಿಂದೂಪುರ ಲಾರಿಗಳ ಮಾಲೀಕರೊಂದಿಗೆ ಶಾಮೀಲಾಗಿ ಬಡವನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಿತ್ತಗಳಿ ಕಡೆಯಿಂದ ಅಕ್ರಮವಾಗಿ ಮರಳು ಸಾಗಣೆ ಮಾಡಲು ಅವಕಾಶ ಮಾಡಿಕೊಟ್ಟಿದ್ದು, ಇದನ್ನು ನಿಯಂತ್ರಿಸಲು ವಿಫಲರಾಗಿರುತ್ತೀರಿ. ಇದು ನಿಮ್ಮ ಕರ್ತವ್ಯದಲ್ಲಿ ಅತೀವ ನಿರ್ಲಕ್ಷತೆ ಮತ್ತು ಬೇಜವಾಬ್ದಾರಿತನವನ್ನು ತೋರಿಸಿರುತ್ತದೆ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ತುಮಕೂರು, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 14-01-2008ರ ಆದೇಶದಲ್ಲಿ "ಅರ್ಜಿದಾರರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ತದನಂತರದ ವಾರ್ಷಿಕ ವೇತನ ಬಡ್ತಿಗಳಿಗೆ ದಕ್ಕೆಯಾಗದಂತೆ ಒಂದು ವರ್ಷಕಾಲ ಮುಂದೂಡುವ ದಂಡನೆ ವಿಧಿಸಿರುತ್ತಾರೆ."

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ:28-05-2008ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಯಾವುದೇ ಹೊಸ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 265 ಪೊಸಿಅ 2008 ಬೆಂಗಳೂರು, ದಿನಾಂಕ 20ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ.ಗುಂಡಪ್ಪ, ಎ.ಎಸ್.ಐ.ಬಸವನಹಳ್ಳಿ ಪೊಲೀಸ್ ಠಾಣೆ, ತುಮಕೂರು, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.835

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎಚ್. ರಾಮಚಂದ್ರಪ್ಪ, ಸಿ.ಪಿ.ಸಿ.-1348, ನ್ಯೂಟೌನ್ ಪೊಲೀಸ್ ಠಾಣೆ, ಭದ್ರಾವತಿ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಶಿವಮೊಗ್ಗ ಜಿಲ್ಲೆ ಇವರ ಆದೇಶ ಸಂಖ್ಯೆ ಸಿಬ್ಬಂದಿ(4)ಶಿಕ್ಷೆ/140/07 ಓ.ಬಿ:585/07, ದಿ:31-01-08.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಪೂರ್ವ ವಲಯ, ದಾವಣಗೆರೆ, ಇವರ ಆದೇಶ ಸಂಖ್ಯೆ: 47/ಅಪೀಲು/ಸಿಬ್ಬಂದಿ/2/2007-08 ಓ.ಬಿ:08/08-09 ದಿನಾಂಕ: 11-04-2008.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:01-08-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)54/2008-09, ದಿನಾಂಕ:24-11-08.

ಪ್ರಸ್ತಾವನೆ:

ಶ್ರೀ ಎಚ್. ರಾಮಚಂದ್ರಪ್ಪ, ಸಿ.ಪಿ.ಸಿ.-1348, ನ್ಯೂಟೌನ್ ಪೊಲೀಸ್ ಠಾಣೆ, ಭದ್ರಾವತಿ, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ತೀವ್ರ ನಿರ್ಲಕ್ಷತೆ ಮತ್ತು ಬೇಜವಾಬ್ದಾರಿತನ ಪ್ರದರ್ಶಿಸಿರುವ ಕಾರಣ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷರೋಪಣೆ:

"ನೀವು ನ್ಯೂಟೌನ್ ಪೊಲೀಸ್ ಠಾಣಾ ವ್ಯಾಪ್ತಿಯ 1ನೇ ವಾರ್ಡ್ ಕರ್ತವ್ಯಕ್ಕೆ ನೇಮಕವಾಗಿದ್ದು, ನಿಮ್ಮ ವಾರ್ಡ್‌ನಲ್ಲಿ ದಿ:12-09-07 ರಂದು ಮೂರ್ತಿ ಬಿನ್ ಗೋವಿಂದಪ್ಪ, ಭಂಡಾರಹಳ್ಳಿ ಭದ್ರಾವತಿ, ಇವರು ಕಡದಕಟ್ಟೆ ಶಿವಲಿಂಗಯ್ಯ ರವರ ವಾಸದ ಮನೆ ಓಣಿಯಲ್ಲಿ ಕಾನೂನು ಬಾಹಿರವಾಗಿ ಮಟ್ಕಾ ಜೂಜಾಟ ನಡೆಸುತ್ತಿದ್ದರೂ ಸಹ ಈ ಬಗ್ಗೆ ಮಾಹಿತಿ ಸಂಗ್ರಹಿಸದೇ ಮಟ್ಕಾ ಜೂಜಾಟ ನಿಯಂತ್ರಿಸುವಲ್ಲಿ ವಿಫಲರಾಗಿರುವುದಲ್ಲದೆ ಭದ್ರಾವತಿ ನ್ಯೂಟೌನ್ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ:75/07 ಕಲಂ 78 ಕ್ಲಾಸ್ (3) ಕೆ.ಪಿ.ಆಕ್ಟ್ ರೀತ್ಯಾ ಪ್ರಕರಣ ದಾಖಲಾಗಲು ಕಾರಣರಾಗಿ ಕರ್ತವ್ಯದಲ್ಲಿ ತೀವ್ರ ನಿರ್ಲಕ್ಷತೆ ಮತ್ತು ಬೇಜವಾಬ್ದಾರಿ ಪ್ರದರ್ಶಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಶಿವಮೊಗ್ಗ, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 31-01-08ರ ಆದೇಶದಲ್ಲಿ "ಅರ್ಜಿದಾರರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ಭವಿಷ್ಯದ ವೇತನ ಬಡ್ತಿಗಳ ಮೇಲೆ ಪರಿಣಾಮ ಬೀರದಂತೆ ಆರು ತಿಂಗಳ ಕಾಲ ಮುಂದೂಡುವ ದಂಡನೆಯನ್ನು ವಿಧಿಸಿದ್ದಾರೆ".

ಈ ಆದೇಶದ ವಿರುದ್ದ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಪೂರ್ವ ವಲಯ, ದಾವಣಗೆರೆ, ಇವರು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ:11-04-2008ರ ಆದೇಶದಲ್ಲಿ ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 247 ಪೊಸಿಅ 2008 ಬೆಂಗಳೂರು, ದಿನಾಂಕ 20ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಚ್. ರಾಮಚಂದ್ರಪ್ಪ, ಸಿ.ಪಿ.ಸಿ.-1348, ನ್ಯೂಟೌನ್ ಪೊಲೀಸ್ ಠಾಣೆ, ಭದ್ರಾವತಿ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.834

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

I -F5 -(0)

ವಿಷಯ: ಶ್ರೀ ಎಸ್.ಎಸ್. ಶೆಟ್ಟಣ್ಣವರ, ಪಿ.ಸಿ., ಮೂಡಲಗಿ, ಬೆಳಗಾವಿ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ: 1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಬೆಳಗಾವಿ ಜಿಲ್ಲೆ, ಇವರ ಆದೇಶ ಸಂಖ್ಯೆ: ಸಿಬ್ಬಂದಿ-2/ಇವಿ/17/2006ಆ.ಪು:ಸಂ:963/2007 ದಿ:17-10-2007.

2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರ ಆದೇಶ ಸಂಖ್ಯೆ: ಅಪೀಲು 5/ಉವ/2008 ದಿನಾಂಕ:06-05-2008.

3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:17-07-08.

4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)47/2008-09, ದಿನಾಂಕ:13-10-2008.

ಪ್ರಸ್ತಾವನೆ:

ಶ್ರೀ ಎನ್.ಎಸ್. ಶೆಟ್ಟಣ್ಣವರ, ಪಿ.ಸಿ.-2316, ಮೂಡಲಗಿ ಪೊಲೀಸ್ ಠಾಣೆ, ಬೆಳಗಾವಿ ಜಿಲ್ಲೆ, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಖಾನಾಪುರ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಕರ್ತವ್ಯದಲ್ಲಿ ಘೋರ ದುರ್ನಡತೆಯನ್ನು ತೋರಿಸಿದ್ದಾರೆ ಎಂಬ ಕಾರಣಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡ ದೋಷಾರೋಪಣೆಯನ್ನು ಹೊರಿಸಲಾಗಿತ್ತು.

ದೋಷರೋಪಣೆ:

"ಸಿ.ಪಿ.ಸಿ.-2316 ಎನ್.ಎಸ್. ಶೆಟ್ಟಣ್ಣವರ ಖಾನಾಪೂರ ಠಾಣೆ ಹಾಲಿ ಮೂಡಲಗಿ ಠಾಣೆಯವರಾದ ನೀವು ದಿ:08-06-2002 ರಿಂದ 25-07-2006 ರವರೆಗೆ ಖಾನಾಪೂರ ಠಾಣೆಯಲ್ಲಿ ಬರಹಗಾರರೆಂದು ಕರ್ತವ್ಯ ನಿರ್ವಹಿಸಿದ್ದು ಆ ಕಾಲಕ್ಕೆ ರಮೇಶ ಲಕ್ಷ್ಮಣ ದೇಸಾಯಿ ಸಾ:-ಜಾಂಬೋಟಿ ಇವರಿಗೆ ಬೆಳೆ ಸಂರಕ್ಷಣೆಯ ಆಯುಧ ಅನುಜ್ಞಾ ಪತ್ರ ಶಿಫಾರಸ್ಸ ವರದಿಗೆ ಮತ್ತು ಅದಕ್ಕೆ ಸಂಬಂಧಪಟ್ಟ ದಾಖಲಾತಿಗಳಿಗೆ ಹಾಗೂ ಅರ್ಜಿ ರಿಜಿಸ್ಟರದ ತಿಂಗಳ ಕೊನೆಗೆ ಹಾಕಲಾದ ಘೋಷ್ವಾರಗಳಿಗೆ ಪಿ.ಎಸ್.ಐ. ರವರ ಸಹಿಯನ್ನು ನೀವೆ ಮಾಡಿ ನಿಮ್ಮ ಕರ್ತವ್ಯದಲ್ಲಿ ಘೋರ ದುರ್ನಡತೆಯನ್ನು ಮತ್ತು ವಿಮುಖತೆಯನ್ನು ತೋರ್ಪಡಿಸಿರುವಿರಿ ಆದ್ದರಿಂದ ನಿಮ್ಮ ಮೇಲೆ ಈ ದೋಷಾರೋಪಣೆ ಇರುತ್ತದೆ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಬೆಳಗಾವಿ ಜಿಲ್ಲೆ, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ:17-10-2007ರ ಆದೇಶದಲ್ಲಿ ಅರ್ಜಿದಾರರಿಗೆ ಪೊಲೀಸ್ ಪೇದೆ ಹುದ್ದೆಯ ಕನಿಷ್ಠ ಮೂಲವೇತನಕ್ಕೆ ಇಳಿಸಿ, ಹೊಸದಾಗಿ ವೇತನ ಬಡ್ತಿಯನ್ನು ಗಳಿಸುವುದು ಹಾಗೂ ದಿ:03-09-06 ರಿಂದ 16-10-2006ರ ವರೆಗಿನ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೇ ಪರಿಗಣಿಸಿ ದಂಡನೆ ವಿಧಿಸಿರುತ್ತಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರು ಶಿಸ್ತುಪ್ರಾಧಿಕಾರವು ವಿಧಿಸಿದ ದಂಡನೆಯು ನಿರ್ಧಿಷ್ಟವಾಗಿರದ ಕಾರಣ ಶಿಸ್ತುಪ್ರಾಧಿಕಾರದ ದಿ:06-05-08ರ ಆದೇಶವನ್ನು ಭಾಗಶ: ಮಾರ್ಪಡಿಸಿ, ಇವರ ಮೂಲ ವೇತನವನ್ನು ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಯ ಮೂಲ ವೇತನಕ್ಕೆ ಎರಡು ವರ್ಷಗಳ ಕಾಲ ಇಳಿಸಿ ಹೊಸದಾಗಿ ವೇತನ ಬಡ್ತಿಗಳನ್ನು ಗಳಿಸುವುದು ಹಾಗೂ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೆ ಪರಿಗಣಿಸಿ ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 06-05-2008ರಲ್ಲಿ ಆದೇಶಿಸಿದ್ದಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಹೊಸ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 216 ಪೊಸಿಅ 2008 ಬೆಂಗಳೂರು, ದಿನಾಂಕ: 20ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಸ್.ಎಸ್. ಶೆಟ್ಟಣ್ಣವರ, ಪಿ.ಸಿ.-2316, ಮೂಡಲಗಿ ಪೊಲೀಸ್ ಠಾಣೆ, ಬೆಳಗಾವಿ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.833

ಟಿ.ಎನ್.ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಟಿ.ಕೆ. ರಾಜಶೇಖರಪ್ಪ, ಪಿ.ಸಿ.-611, ಚಿಕ್ಕಜಾಜೂರು ಪೊಲೀಸ್ ಠಾಣೆ, ಚಿತ್ರದುರ್ಗ ಜಿಲ್ಲೆ, ರವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ, ಇವರ ಆದೇಶ ಸಂಖ್ಯೆ: ಸಿಬ್ಬಂದಿ(2)ಪಿಆರ್/129/2007 ಓಬಿ:470/07-08 ದಿನಾಂಕ:27-12-2007.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಪೂರ್ವವಲಯ, ದಾವಣಗೆರೆ, ಇವರ ಆದೇಶ ಸಂಖ್ಯೆ: 44/ಅಪೀಲು/ಸಿಬ್ಬಂದಿ-2/2007-08 ಓ.ಬಿ:05/2008-09, ದಿನಾಂಕ: 08-04-2008.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:16-07-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)41/2008-09, ದಿನಾಂಕ:02-12-2008

ಪ್ರಸ್ತಾವನೆ:

ಶ್ರೀ ಟಿ.ಕೆ. ರಾಜಶೇಖರಪ್ಪ, ಪಿ.ಸಿ.-611, ಚಿಕ್ಕಜಾಜೂರು, ಚಿತ್ರದುರ್ಗ ಜಿಲ್ಲೆ, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಘೋರ ಅಶಿಸ್ತು ಹಾಗೂ ದುರ್ನಡತೆ ಪ್ರದರ್ಶಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆ ಹೊರಿಸಲಾಗಿದೆ.

ದೋಷರೋಪಣೆ:

"ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಬ್ಬ ಜವಾಬ್ದಾರಿಯುತ ಪೊಲೀಸ್ ಸಿಬ್ಬಂದಿಯಾಗಿ ಮೇಲಾಧಿಕಾರಿಗಳ ಅನುಮತಿ ಪಡೆಯದೆ ದಿ: 09-11-2007 ರಂದು ಸುಮಾರು 18.30ರ ಸಮಯದಲ್ಲಿ ನೇಮಿಸಿದ ಕರ್ತವ್ಯದ ಸ್ಥಳದಲ್ಲಿ ಇರದೆ ಗೈರುಹಾಜರಾಗಿದ್ದು, ಅಲ್ಲದೆ ಅದೇ ದಿನ ಸಾಯಂಕಾಲ ಠಾಣೆಯಲ್ಲಿ ಎಸ್‌ಎಚ್‌ಓ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಸಿ.ಎಚ್.ಸಿ.-269, ಎಚ್.ಬಿ.ಮಲ್ಲಿಕಾರ್ಜುನಪ್ಪ, ರವರೊಂದಿಗೆ ಸಾರ್ವಜನಿಕರ ಎದುರಿಗೆ ಏರುಧ್ವನಿಯಲ್ಲಿ ಕೂಗಾಡಿ ಅಸಭ್ಯ, ಅವಾಚ್ಯ ಶಬ್ದಗಳಿಂದ ನಿಂದಿಸಿ ಇಲಾಖೆಯ ಘನತೆ ಗೌರವಗಳಿಗೆ ಕುಂದು ತರುವಂತೆ ವರ್ತಿಸಿ, ಕರ್ತವ್ಯದಲ್ಲಿ ಘೋರ ಅಶಿಸ್ತು ಹಾಗೂ ದುರ್ನಡತೆ ಪ್ರದರ್ಶಿಸಿದ ಬಗ್ಗೆ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ:27-12-2007ರ ಆದೇಶದಲ್ಲಿ ಅರ್ಜಿದಾರರರನ್ನು ಇವರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ಭವಿಷ್ಯದ ಬಡ್ತಿಗೆ ಪರಿಣಾಮ ಬೀರದಂತೆ ಒಂದು ವರ್ಷಕಾಲ ಮುಂದೂಡುವ ದಂಡನೆಯನ್ನು ವಿಧಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಪೂರ್ವ ವಲಯ, ದಾವಣಗೆರೆ, ಇವರು ದಂಡನಾದೇಶವನ್ನು ಭಾಗಶಃ ಮಾರ್ಪಡಿಸಿ, ಇವರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ವೇತನ ಬಡ್ತಿಗಳಿಗೆ ದಕ್ಕೆಯಾಗದಂತೆ ಆರು ತಿಂಗಳ ಕಾಲ ಮುಂದೂಡುವ ದಂಡನೆಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 08-04-2008ರ ಆದೇಶದಲ್ಲಿ ವಿಧಿಸಿದ್ದಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ

ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 215 ಪೊಸಿಅ 2008 ಬೆಂಗಳೂರು, ದಿನಾಂಕ 18ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಟಿ.ಕೆ. ರಾಜಶೇಖರಪ್ಪ, ಪಿ.ಸಿ.-611, ಚಿಕ್ಕಜಾಜೂರು, ಚಿತ್ರದುರ್ಗ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.832 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಸಿ.ಎಸ್. ಸತ್ಯನಾರಾಯಣ, ಮಾಜಿ ಪೊಲೀಸ್ ಸಬ್-ಇನ್ಸ್‌ಪೆಕ್ಟರ್, ಚಿಕ್ಕಬಳ್ಳಾಪುರ, ರವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು ಇವರ ಆದೇಶ ಸಂಖ್ಯೆ: ಪನ್ನಿ: ಡಿಇ/15/2005-06 ಓ.ಬಿ:43/2007-08 ದಿನಾಂಕ:25-10-07.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು ಬೆಂಗಳೂರು ಇವರ ಆದೇಶ ಸಂಖ್ಯೆ: ಅಪೀಲು(6)79/ 2007-08 ಓ.ಬಿ:8/ 2008-09 ದಿನಾಂಕ:28-04-08.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:09-06-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ ಅಪೀಲು(2)31/2008-09, ದಿನಾಂಕ:24-11-2008.

ಪ್ರಸ್ತಾವನೆ:

ಶ್ರೀ ಸಿ.ಎಸ್. ಸತ್ಯನಾರಾಯಣ, ಇವರು ಈ ಹಿಂದೆ ಮಧುಗಿರಿ ಪೊಲೀಸ್ ಠಾಣೆಯಲ್ಲಿ (ಅಪರಾಧ ವಿಭಾಗ) ಪೊಲೀಸ್ ಸಬ್-ಇನ್ಸ್‌ಪೆಕ್ಟರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಇಲಾಖೆಗೆ ಹಾಗೂ ಸರ್ಕಾರಕ್ಕೆ ಮೋಸವೆಸಗಿ ಪೊಲೀಸ್ ಅಧಿಕಾರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಅತೀವ ದುರ್ನಡತೆ ಪ್ರದರ್ಶಿಸಿರುವ ಆರೋಪದ ಮೇಲೆ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ ಈ ಕೆಳಕಂಡ ದೋಷಾರೋಪಣೆ ಹೊರಿಸಲಾಗಿದೆ.

ದೋಷರೋಪಣೆ:

"ಶ್ರೀ. ಸಿ.ಎಸ್. ಸತ್ಯನಾರಾಯಣ (ಮೂಲ ಹೆಸರು ಸಿ.ಎಸ್.ನಾಗರಾಜು) ಪಿ.ಎಸ್.ಐ. ಮಧುಗಿರಿ ಠಾಣೆ (ಅಪರಾಧ ವಿಭಾಗ) ಆದ ನೀವು ನಿಮ್ಮ ನಿಜವಾದ ಹೆಸರು ಸಿ.ಎಸ್. ನಾಗರಾಜ ಎಂದು ಇದ್ದರೂ ಸಹಾ ದಿ:26-04-1974 ರಂದು ಕೋಲಾರ ಜಿಲ್ಲೆಯಲ್ಲಿ ನಿಮ್ಮ ತಮ್ಮನಾದ ಶ್ರೀ ಸಿ.ಎಸ್. ಸತ್ಯನಾರಾಯಣ, ರವರ ಎಸ್.ಎಸ್.ಎಲ್.ಸಿ. ಅಂಕಪಟ್ಟಿಯನ್ನು ಪಡೆದು, ಆ ಹೆಸರಿನಲ್ಲಿಯೇ ಪೇದೆಯಾಗಿ ನೇಮಕಗೊಂಡು ದಿನಾಂಕ 01-05-1974 ರಂದು ಕರ್ತವ್ಯಕ್ಕೆ ವರದಿ ಮಾಡಿಕೊಂಡು ಮತ್ತು ನಿಮ್ಮ ತಮ್ಮನ ಹೆಸರಿನಲ್ಲಿನ ವಿದ್ಯಾಭ್ಯಾಸದ ಪ್ರಮಾಣಪತ್ರಗಳನ್ನು ದುರುಪಯೋಗ ಪಡಿಸಿಕೊಂಡು, ತದನಂತರ ಇಲಾಖೆಯಲ್ಲಿ ಇಲ್ಲಿಗೆ 31 ವರ್ಷಗಳಿಂದ ಹಂತ ಹಂತವಾಗಿ ಬಡ್ತಿ ಹೊಂದಿ ಸರ್ಕಾರದಿಂದ ಒಬ್ಬ ಪೊಲೀಸ್ ಅಧಿಕಾರಿಗೆ ಸಿಗಬೇಕಾದ ಎಲ್ಲಾ ಸವಲತ್ತುಗಳನ್ನು ಪಡೆದು ಅನುಭವಿಸುತ್ತಾ ಪೊಲೀಸ್ ಇಲಾಖೆಗೆ ಹಾಗೂ ಸರ್ಕಾರಕ್ಕೆ ಮೋಸವೆಸಗಿ ಒಬ್ಬ ಶಿಸ್ತಿನ ಪೊಲೀಸ್ ಅಧಿಕಾರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಇಲಾಖೆಯ ನಿಯಮಾವಳಿಗೆ ವಿರುದ್ಧವಾಗಿ ವರ್ತಿಸಿ ಅತೀವ ದುರ್ನಡತೆಯನ್ನು ಪ್ರದರ್ಶಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ

25-10-07ರ ಆದೇಶದಲ್ಲಿ ಅರ್ಜಿದಾರರನ್ನು ಸೇವೆಯಿಂದ ವಜಾಗೊಳಿಸಿ, ಅಮಾನತ್ತಿನಲ್ಲಿದ್ದ ಅವಧಿಯನ್ನು ಅಮಾನತ್ತೆಂದೆ ಪರಿಗಣಿಸುವ ದಂಡನೆಯನ್ನು ವಿಧಿಸಿರುತ್ತಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ: 28-04-2008ರ ಆದೇಶದಲ್ಲಿ ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸಬಹುದಾದ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 258 ಪೊಸಿಅ 2008 ಬೆಂಗಳೂರು, ದಿನಾಂಕ: 18ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಸಿ.ಎಸ್. ಸತ್ಯನಾರಾಯಣ, ಮಾಜಿ ಪೊಲೀಸ್ ಸಬ್-ಇನ್ಸ್‌ಪೆಕ್ಟರ್, ಚಿಕ್ಕಬಳ್ಳಾಪುರ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 831

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎಸ್.ಎ. ಖಾದರ್, ಪಿ.ಎಸ್.ಐ., ಜೆಸ್ಕಾಂ, ಜಾಗೃತದಳ ಪೊಲೀಸ್ ಠಾಣೆ, ಬೀದರ್, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಈಶಾನ್ಯ ವಲಯ, ಗುಲ್ಬರ್ಗಾ, ಇವರ ಆದೇಶ ಸಂಖ್ಯೆ: ಇವಿ06/ಈವ/2006 ಅಪು ಸಂ:316/ಈವ/2006 ದಿನಾಂಕ:15-05-2006.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಆದೇಶ ಸಂಖ್ಯೆ: ಅಪೀಲು(6)/36/2006-07 ದಿನಾಂಕ:03-11-2006.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:12-02-2007.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)6/2007-08, ದಿನಾಂಕ:17-04-2008.
5) ಕರ್ನಾಟಕ ಲೋಕ ಸೇವಾ ಆಯೋಗದ ಪತ್ರ ಸಂಖ್ಯೆ: ಪಿಎಸ್‌ಸಿ 78 ಸಿಎನ್‌ಫ್‌ಸ್ 2008 ದಿನಾಂಕ:04-10-2008.

ಪ್ರಸ್ತಾವನೆ:

ಶ್ರೀ ಎಸ್.ಎ. ಖಾದರ್, ಪಿ.ಎಸ್.ಐ., ಜೆಸ್ಕಾಂ, ಜಾಗೃತದಳ ಪೊಲೀಸ್ ಠಾಣೆ, ಇವರು ರಾಯಚೂರು ಜಿಲ್ಲೆಯ ತುರ್ವಿಹಾಳ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಕರ್ತವ್ಯದಲ್ಲಿ ಘೋರ ನಿರ್ಲಕ್ಷ್ಯತನವೆಸಗಿದ ಕಾರಣಕ್ಕಾಗಿ ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6 ಮತ್ತು 8ರಡಿ ಜಂಟಿ ಇಲಾಖಾ ವಿಚಾರಣೆ ನಡೆಸಲಾಗಿದೆ.

ಆರೋಪರೋಪಣೆ:

"ಈ ಹಿಂದೆ ರಾಯಚೂರು ಜಿಲ್ಲೆಯ ತುರ್ವಿಹಾಳ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ದಿ:26-10-2004 ರಂದು ಸಾಯಂಕಾಲ 4-00 ಘಂಟೆ ಸುಮಾರಿಗೆ ತುರ್ವಿಹಾಳ ಪೊಲೀಸ್ ಠಾಣೆ, ಗುನ್ನೆ ನಂ:102/2004ರ ಫಿರ್ಯಾದುದಾರ ಹನುಮಂತ ಈತನ ಮಗ ಬಸವರಾಜನಿಗೆ ಶ್ರೀ.ಶಿವಶಂಕರಗೌಡ, ಈತನು ಜಾತಿ ನಿಂದನೆ ಮಾಡಿದ ಬಗ್ಗೆ ಫಿರ್ಯಾದಿ ಕೊಟ್ಟರೂ ಪ್ರಕರಣ ದಾಖಲಿಸದೆ ಕರ್ತವ್ಯದಲ್ಲಿ ಘೋರ ನಿರ್ಲಕ್ಷ್ಯತನ ಎಸಗಿರುತ್ತಾರೆ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಈಶಾನ್ಯ ವಲಯ, ಗುಲ್ಬರ್ಗಾ. ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 15-05-2006ರ ಆದೇಶದಲ್ಲಿ "ಅರ್ಜಿದಾರರ ವಾರ್ಷಿಕ ವೇತನ ಬಡ್ತಿಯ ಎರಡು ಹಂತಗಳನ್ನು ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ಧಕ್ಕೆಯಾಗದಂತೆ ಆದೇಶಿಸಿ ಸೇವಾವಧಿಯವರೆಗೆ ಇಳಿಸಿರುವ ದಂಡನೆ"ಯನ್ನು ವಿಧಿಸಿರುತ್ತಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಅ.ಪೊ.ಅ.ರವರ ವಿರುದ್ಧ ಹೊರಿಸಲಾದ ಆರೋಪವು ಯಾವುದೇ ಸಂಶಯಕ್ಕೆ ಆಸ್ಪದವಿಲ್ಲದಂತೆ ದೃಢಪಟ್ಟಿರುತ್ತದೆ. ಆದರೆ ಶಿಸ್ತುಪ್ರಾಧಿಕಾರವು ಹೊರಡಿಸಿದ ದಂಡನಾದೇಶವು ಕರ್ನಾಟಕ ನಾಗರೀಕ ಸೇವಾ ನಿಯಮಗಳು 59(1)(ಬಿ)ಗೆ ವ್ಯತಿರಿಕ್ತವಾಗಿರುವುದರಿಂದ ಸದರಿ ಆದೇಶವು ತಾಂತ್ರಿಕ ದೋಷವುಳ್ಳದ್ದಾಗಿರುವುದರಿಂದ ದಂಡನಾದೇಶವನ್ನು ಮಾರ್ಪಡಿಸಿ, ಇವರ ಮುಂದಿನ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಎರಡು ವರ್ಷಗಳ ಕಾಲ ಅವರ ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ಧಕ್ಕೆಯಾಗುವಂತೆ ಮುಂದೂಡಿ, ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ:03-11-2006ರಲ್ಲಿ ಆದೇಶಿಸಿದ್ದಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿ ಅರ್ಜಿದಾರರ ವಿರುದ್ಧ ಆರೋಪ ಸಾಬೀತಾಗಿದೆ. ಆದರೆ ಎಸಗಿರುವ ಆರೋಪಕ್ಕೆ ವಿಧಿಸಿರುವ ದಂಡನೆಯು ಹೆಚ್ಚಿನದಾಗಿರುವುದೆಂದು ಪರಿಗಣಿಸಿ ಈ ಕುರಿತು ಕರ್ನಾಟಕ ಲೋಕ ಸೇವಾ ಆಯೋಗದ ಸಹಮತಿಯನ್ನು ಓದಲಾದ 5ರ ಪತ್ರದಲ್ಲಿ ಪಡೆದು ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 364 ಪೊಸಇ 2007 ಬೆಂಗಳೂರು, ದಿನಾಂಕ: 06ನೇ ನವೆಂಬರ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ. ಎಸ್.ಎ. ಖಾದರ್, ಪಿ.ಎಸ್.ಐ., ಜೆಸ್ಕಾಂ, ಜಾಗೃತದಳ ಪೊಲೀಸ್ ಠಾಣೆ, ಬೀದರ್, ಇವರ ದಂಡನಾದೇಶವನ್ನು ಭಾಗಶ: ಮಾರ್ಪಡಿಸಿ, ಇವರ ಒಂದು ವಾರ್ಷಿಕ ವೇತನ ಬಡ್ತಿಯನ್ನು ಅವರ ಮುಂದಿನ ವಾರ್ಷಿಕ ವೇತನ ಬಡ್ತಿಗೆ ಧಕ್ಕೆಯಾಗದಂತೆ ಒಂದು ವರ್ಷಕಾಲ ಮುಂದೂಡುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.96

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ನಾರಾಯಣಶೆಟ್ಟಿ, ಸಿ.ಪಿ.ಸಿ.-442, ಶೃಂಗೇರಿ ಪೊಲೀಸ್ ಠಾಣೆ, ಚಿಕ್ಕಮಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಆದೇಶ ಸಂಖ್ಯೆ: ಸಿಬಿ (8)7/2005-06 ದಿನಾಂಕ:11-06-2007.
2) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:31-08-2007.
3) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಸಿಬಿ(8)7/2005-06, ದಿನಾಂಕ:28-02-2008.

ಪ್ರಸ್ತಾವನೆ:

ಶ್ರೀ ನಾರಾಯಣಶೆಟ್ಟಿ, ಸಿ.ಪಿ.ಸಿ.-442, ಶೃಂಗೇರಿ ಪೊಲೀಸ್ ಠಾಣೆ, ಚಿಕ್ಕಮಗಳೂರು ಜಿಲ್ಲೆ, (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಹಾಗೂ ಇತರರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರ ಜೊತೆಗೆ 8ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಆಧೇಶಿಸಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷರೋಪಣೆ:

"ಶ್ರೀ. ನಾರಾಯಣಶೆಟ್ಟಿ, ಸಿ.ಪಿ.ಸಿ.-442, ಆಗಿರುವ ನೀವು ದಿ:12-06-03 ರಿಂದ ಶೃಂಗೇರಿ ಪೊಲೀಸ್ ಠಾಣೆಯಲ್ಲಿ ಸೇವೆ ಸಲ್ಲಿಸುತ್ತಿದ್ದೀರಿ. ಶೃಂಗೇರಿ ಪೊಲೀಸ್ ಠಾಣಾ ಸರಹದ್ದಿನಲ್ಲಿ ಮಗ್ಗೇಬೈಲು ಚಂದ್ರಶೇಖರರಾವ್ ರವರಿಗೆ ನಕ್ಸಲೀಯರು

ತೊಂದರೆ ಕೊಡುತ್ತಿರುವ ಬಗ್ಗೆ ಅವರ ರಕ್ಷಣೆಗಾಗಿ ಮನೆಗೆ ಗಾರ್ಡ್ ಕರ್ತವ್ಯಕ್ಕೆ ನಿಮ್ಮನ್ನು ನೇಮಿಸಲಾಗಿತ್ತು. ದಿ:07-10-04 ರಂದು ಅಲ್ಲಿ ನೀವು ಗಾರ್ಡ್ ಕರ್ತವ್ಯವನ್ನು ನಿರ್ವಹಿಸದೇ, ಮೇಲಾಧಿಕಾರಿಗಳಿಗೂ ತಿಳಿಸದೇ, ನಿಮಗೆ ನೀಡಿದ ಸರ್ಕಾರಿ ಸೊತ್ತುಗಳಾದ ಎಸ್‌ಎಲ್‌ಆರ್. ಬಂದೂಕು ಹಾಗೂ ಮದ್ದುಗುಂಡುಗಳನ್ನು ಸುರಕ್ಷಿತವಾಗಿ ಇಟ್ಟುಕೊಳ್ಳದೇ, ಮೇಲಾಧಿಕಾರಿಗಳಿಂದ ಪೂರ್ವಾನುಮತಿಯನ್ನೂ ಪಡೆಯದೇ ಕರ್ತವ್ಯದ ಸ್ಥಳವನ್ನು ತೊರೆದು ಗೈರುಹಾಜರಾಗಿರುತ್ತೀರಿ. ಸರ್ಕಾರಿ ಸೊತ್ತನ್ನು ನೀವು ರಕ್ಷಿಸದೆ ನಕ್ಸಲೀಯರು ತೆಗೆದುಕೊಂಡು ಹೋಗಲು ಕಾರಣರಾಗಿತೀವ್ರ ತರಹದ ಕರ್ತವ್ಯಲೋಪವನ್ನು ಎಸಗಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 11-06-2007ರ ಆದೇಶದಲ್ಲಿ ಅರ್ಜಿದಾರರ "ಒಂದು ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ಧಕ್ಕೆಯಾಗುವಂತೆ ಒಂದು ವರ್ಷದ ಕಾಲ ಮುಂದೂಡುವ ದಂಡನೆ" ವಿಧಿಸಿರುತ್ತಾರೆ.

ಈ ಆದೇಶದ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಇವರ ವಿರುದ್ಧದ ಆರೋಪವು ಸಾಬೀತಾಗಿದ್ದು, ಪರಿಷ್ಕರಣ ಮೇಲ್ಮನವಿಯಲ್ಲಿ ಕರ್ತವ್ಯಚ್ಯುತಿ ಮಾಡದಿರುವುದಕ್ಕೆ ಪರೋಕ್ಷ ಕಾರಣಗಳಾಗಲಿ ಅಥವಾ ಹೊಸ ಸಮರ್ಥನೆಯನ್ನು ನೀಡಿರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 92 ಪೊಸಿಅ 2008 ಬೆಂಗಳೂರು, ದಿನಾಂಕ 17ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ನಾರಾಯಣಶೆಟ್ಟಿ, ಸಿ.ಪಿ.ಸಿ.-442, ಶೃಂಗೇರಿ ಪೊಲೀಸ್ ಠಾಣೆ, ಚಿಕ್ಕಮಗಳೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.440 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎಚ್.ಬಿ. ಮುದ್ದುರಾಜು, ಸಿ.ಪಿ.ಸಿ.-130, ಚಿಕ್ಕನಾಯಕನಹಳ್ಳಿ, ಪೊಲೀಸ್ ಠಾಣೆ, ತುಮಕೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ತುಮಕೂರು ಜಿಲ್ಲೆ, ಇವರ ಆದೇಶ ಸಂಖ್ಯೆ: ಪನ್ಸಿ/03/2007, ದಿನಾಂಕ:26-06-2007.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರ ಆದೇಶ ಸಂಖ್ಯೆ: ಪನ್ಸಿ/ಡಿಇ/12/2007-08 ಓಬಿ:162/07-08 ದಿನಾಂಕ:28-12-2007.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:15-04-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)18/2008-09, ದಿನಾಂಕ:26-06--2008.

ಪ್ರಸ್ತಾವನೆ:

ಶ್ರೀ ಎಚ್.ಬಿ. ಮುದ್ದುರಾಜು, ಸಿ.ಪಿ.ಸಿ.-130, ಇವರು ಚಿಕ್ಕನಾಯಕನಹಳ್ಳಿ ಪೊಲೀಸ್ ಠಾಣೆ, ತುಮಕೂರು ಜಿಲ್ಲೆ, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆ ಹೊರಿಸಲಾಗಿದೆ.

ದೋಷಾರೋಪಣೆ:

1. ನಿಮ್ಮನ್ನು ಈ ಕಛೇರಿಯ ಆದೇಶ ಸಂಖ್ಯೆ: ಸಿಬ್ಬಂದಿ(1)02/2005-06 ಓಬಿ ಸಂಖ್ಯೆ: 386 ದಿ: 09-03-2006ರಲ್ಲಿ ಸಾರ್ವಜನಿಕ ಹಿತದೃಷ್ಟಿ ಯಿಂದ ತಿಪಟೂರು ನಗರ ಠಾಣೆಯಿಂದ ಮಧುಗಿರಿ ಪೊಲೀಸ್

ಠಾಣೆಗೆ ವರ್ಗಾವಣೆ ಮಾಡಲಾಗಿರುತ್ತದೆ. ನೀವು ರಜೆ ಮೇಲೆ ಇದ್ದುದರಿಂದ ದಿ:12-03-2006 ರಂದು ತಿಪಟೂರು ನಗರ ಪೊಲೀಸ್ ಠಾಣಾ ದಿನಚರಿಯಲ್ಲಿ 21-30 ಗಂಟೆಗೆ ಪಿ.ಎಸ್.ಐ. ತಿಪಟೂರು ನಗರ ಠಾಣೆ ರವರು ನಿಮ್ಮನ್ನು ಕರ್ತವ್ಯದಿಂದ ಬಿಡುಗಡೆ ಮಾಡಿ, ರಹದಾರಿ ಮತ್ತು ಸಿ.ಎಲ್.ಎಕ್ಸ್ಟ್ರಾಕ್ಟ್ ಮುಂತಾದವುಗಳನ್ನು ಮುದ್ದಾಂ ಮಧುಗಿರಿ ಪೊಲೀಸ್ ಠಾಣೆಗೆ ಕಳುಹಿಸಿಕೊಟ್ಟಿರುತ್ತಾರೆ.

2. ನಂತರ ನೀವು 22-03-2006 ರಂದು ಸಾಯಂಕಾಲ ಮಧುಗಿರಿ ಠಾಣೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿದ್ದು, ಆನಂತರ ದಿನಾಂಕ: 24-03-2006 ರಿಂದ ಕರ್ತವ್ಯಕ್ಕೆ ಹಾಜರಾಗದೇ ಗೈರುಹಾಜರಾಗಿರುತ್ತೀರಿ.

3. ನೀವು ದಿ:05-04-2006 ರಂದು ನಿಮಗೆ ಆರೋಗ್ಯ ಸರಿ ಇಲ್ಲ ಎಂಬುದಾಗಿ, ಕರ್ತವ್ಯಕ್ಕೆ ಬರಲು ಸಾಧ್ಯವಿಲ್ಲವೆಂದು ನಿಮ್ಮ ಬಾಬ್ತು ಎಮ್.ಹೆಚ್.ಎಸ್. ಪುಸ್ತಕವನ್ನು ಅಂಚೆ ಮೂಲಕ ಕಳುಹಿಸಿಕೊಡಲು ಕೋರಿದ್ದರಿಂದ ಪಿಸಿ-821 ವಸಂತಕುಮಾರ್ ಎಂಬುವರೊಂದಿಗೆ ಎಂ.ಹೆಚ್.ಎಸ್. ಪುಸ್ತಕವನ್ನು ಖುದ್ದಾಗಿ ಕಳುಹಿಸಿದ್ದು ಸರ್ಕಾರಿ ಆಸ್ಪತ್ರೆ ತಿಪಟೂರಿನಲ್ಲಿ ವಿಚಾರಿಸಲಾಗಿ ನೀವು ಸಿಕ್ಕಿರುವುದಿಲ್ಲ. ನೀವು ವಾಸಿಸುತ್ತಿದ್ದ ಪೊಲೀಸ್ ವಸತಿ ಗೃಹ ಬಳಿ ವಿಚಾರಿಸಿದಾಗಲೂ ಸಹ ಸಿಕ್ಕಿರುವುದಿಲ್ಲ.

4. ಈ ಬಗ್ಗೆ ಜಿಲ್ಲಾ ಪೊಲೀಸ್ ಕಛೇರಿ ತುಮಕೂರಿನಿಂದ ಸಿಬ್ಬಂದಿ(2)530/05-06 ದಿ:29-04-2006ರ ಆದೇಶದಂತೆ ನಿಮಗೆ ಕರ್ತವ್ಯ ತ್ಯಜಿಸಿದ ನೋಟೀಸ್ ನೀಡಿ ಜಾರಿ ಮಾಡಲು ಸಿಬ್ಬಂದಿಯವರನ್ನು ಕಳುಹಿಸಿದಾಗ ನಿಮ್ಮ ಪೊಲೀಸ್ ವಸತಿಗೃಹಕ್ಕೆ ಬೀಗ ಹಾಕಿದ್ದು, ಅಲ್ಲಿ ವಿಚಾರಿಸಲಾಗಿ ನೀವು ಒಂದು ವಾರದ ಹಿಂದೆ ಮನೆಗೆ ಬೀಗ ಹಾಕಿಕೊಂಡು ಶಿವಮೊಗ್ಗಕ್ಕೆ ಹೋಗಿರುವ ಬಗ್ಗೆ ತಿಳಿದು ಬಂದಿರುತ್ತದೆ.

5. ನಂತರ ದಿ:15-05-2006 ರಂದು ಈ ಕಛೇರಿಯ ಸಿಬ್ಬಂದಿ(1)71/2006 ಓಬಿ: 59/2006 ದಿ: 15-05-2006ರಲ್ಲಿ ನಿಮ್ಮನ್ನು ಮಧುಗಿರಿ ಠಾಣೆಯಿಂದ ಚಿ.ನಾ.ಹಳ್ಳಿ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿದ್ದು, ನೀವು ಕರ್ತವ್ಯಕ್ಕೆ ಅನಧಿಕೃತವಾಗಿ ಗೈರುಹಾಜರಾಗಿದ್ದ ಪ್ರಯುಕ್ತ ನಿಮ್ಮ ರಹದಾರಿಯನ್ನು ದಿ:29-05-2006 ರಂದು ಚಿ.ನಾ.ಹಳ್ಳಿ ಪೊಲೀಸ್ ಠಾಣೆಗೆ ಕಳುಹಿಸಲಾಗಿರುತ್ತದೆ. ಆ ಬಗ್ಗೆ ಠಾಣಾ ದಿನಚರಿಯಲ್ಲಿ ನಮೂದಿಸಲಾಗಿದೆ.

6. ನಂತರ ಈ ಕಛೇರಿಯ ಆದೇಶ ಸಂಖ್ಯೆ: ಸಿಬ್ಬಂದಿ(1)71/2006 ಓಬಿ ಸಂಖ್ಯೆ:71/2006 ದಿ:31-05-2006 ರಲ್ಲಿ ನಿಮ್ಮನ್ನು ಚಿ.ನಾ.ಹಳ್ಳಿ ಪೊಲೀಸ್ ಠಾಣೆಯಿಂದ ತಿಪಟೂರು ನಗರ ಠಾಣೆಗೆ ವರ್ಗಾವಣೆ ಮಾಡಲಾಗಿದ್ದು ನಂತರ ಆದೇಶ ಸಂಖ್ಯೆ: ಸಿಬ್ಬಂದಿ(1)71/2006 ದ ಓಬಿ ಸಂಖ್ಯೆ:111/2006 ದಿ:06-06-2006ರಲ್ಲಿ ಮೇಲಿನ ಆದೇಶದಲ್ಲಿ ಚಿ.ನಾ.ಹಳ್ಳಿ ಪೊಲೀಸ್ ಠಾಣೆಯಿಂದ ತಿಪಟೂರು ನಗರ ಠಾಣೆಗೆ ವರ್ಗಾವಣೆ ಮಾಡಲಾಗಿದ್ದ ಆದೇಶವನ್ನು ರದ್ದುಪಡಿಸಲಾಗಿದೆ.

7. ನಂತರ ಈ ಕಛೇರಿಯ ಆದೇಶ ಸಂಖ್ಯೆ: ಸಿಬ್ಬಂದಿ(1)101/2006-07 ದಿ: 19-08-2006ರ ಕೆ.ಎ.ಟಿ.ಅರ್ಜಿ ಸಂಖ್ಯೆ:5092/2006ರಲ್ಲಿ ದಿ: 02-08-2006 ರಂದು ನೀಡಿದ ತೀರ್ಪನ್ನು ಉಲ್ಲೇಖಿಸಿ ಸಾರ್ವಜನಿಕ ಹಿತದೃಷ್ಟಿಯಿಂದ ನಿಮ್ಮನ್ನು ತಿಪಟೂರು ನಗರ ಠಾಣೆಯಲ್ಲಿ ಮುಂದುವರೆಸಲು ಸೂಕ್ತವಲ್ಲವೆಂದು ಮನವರಿಕೆಯಾದ ಕಾರಣ ತಿಪಟೂರು ನಗರ ಠಾಣೆಗೆ ಆದ ವರ್ಗಾವಣೆಯನ್ನು ರದ್ದುಗೊಳಿಸಲಾಗಿರುತ್ತದೆ ಎಂದು ನಿಮಗೆ ಹಿಂಬರಹವನ್ನು ನೀಡಲಾಗಿರುತ್ತದೆ.

8. ನೀವು ದಿ:24-03-2006 ರಿಂದ ದಿ:28-11-2006 ರವರೆಗೆ ಒಟ್ಟು 252 ದಿನಗಳು ಅನಧಿಕೃತವಾಗಿ ಕರ್ತವ್ಯಕ್ಕೆ ಗೈರುಹಾಜರಾಗಿ ಕರ್ತವ್ಯದಲ್ಲಿ ನಿರ್ಲಕ್ಷತೆ ಹಾಗೂ ಮೇಲಾಧಿಕಾರಿಗಳ ಆದೇಶವನ್ನು ಪದೇ ಪದೇ ಉಲ್ಲಂಘಿಸಿ ನಿಮ್ಮ ದುರ್ನಡತೆ ಮತ್ತು ಅಶಿಸ್ತನ್ನು ಪ್ರದರ್ಶಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ತುಮಕೂರು ಜಿಲ್ಲೆ, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 26-06-2007ರ ಆದೇಶದಲ್ಲಿ "ಅರ್ಜಿದಾರರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ತದನಂತರದ ವಾರ್ಷಿಕ ವೇತನ ಬಡ್ತಿಗಳಿಗೆ ಧಕ್ಕೆಯಾಗದಂತೆ ಮೂರು ವರ್ಷಗಳ ಕಾಲ ಮುಂದೂಡಿ ಅವರು ಕರ್ತವ್ಯಕ್ಕೆ ಗೈರುಹಾಜರಾದ ಅವಧಿ ದಿನಾಂಕ: 24-03-2006 ರಿಂದ 28-11-2006ರ ವರೆಗಿನ ಅವಧಿಯನ್ನು ಸಂಬಳರಹಿತ ರಜೆಯನ್ನಾಗಿ ಪರಿಗಣಿಸಿ" ದಂಡನೆಯನ್ನು ವಿಧಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರು ಮೇಲ್ಮನವಿಯಲ್ಲಿ ಪರಿಶೀಲಿಸಿ ಶಿಸ್ತು ಪ್ರಾಧಿಕಾರವು

ವಿಧಿಸಿದ ದಂಡನೆಯು ಸಮಂಜಸವಾಗಿರುವುದಾಗಿ ಅಭಿಪ್ರಾಯಪಟ್ಟು, ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 28-12-2007ರಲ್ಲಿ ಆದೇಶದಲ್ಲಿ ತಿರಸ್ಕರಿಸಿದ್ದಾರೆ.

ಈ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಮೇಲ್ಮನವಿದಾರು ಅನಧಿಕೃತವಾಗಿ ಗೈರುಹಾಜರಾಗಿರುವುದು ಸಾಬೀತಾಗಿದ್ದು ಪರಿಷ್ಕರಣ ಮೇಲ್ಮನವಿಯನ್ನು ಪರಿಗಣಿಸುವಂತಹ ಸಮರ್ಥನೆ ಇಲ್ಲದ ಕಾರಣ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಪರಿಷ್ಕರಣ ಮೇಲ್ಮನವಿದಾರರಿಗೆ ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 257 ಪೊಸಿಅ 2008 ಬೆಂಗಳೂರು, ದಿನಾಂಕ: 01ನೇ ಡಿಸೆಂಬರ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಚ್.ಬಿ. ಮುದ್ದುರಾಜು, ಸಿ.ಪಿ.ಸಿ.-130, ಚಿಕ್ಕನಾಯಕನಹಳ್ಳಿ ಪೊಲೀಸ್ ಠಾಣೆ, ತುಮಕೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.290 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಲೋಕೇಶ್, ಎಚ್.ಸಿ.-1994, ಜೆ.ಜೆ.ನಗರ ಪೊಲೀಸ್ ಠಾಣೆ, ಬೆಂಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರಿ ಹಾಗೂ ಉಪ ಪೊಲೀಸ್ ಆಯುಕ್ತರು, ಪಶ್ಚಿಮ ವಿಭಾಗ, ಬೆಂಗಳೂರು, ಇವರ ಆದೇಶ ಸಂಖ್ಯೆ: ಡಿಇ 6/ಆರ್6/ಡಿಸಿಪಿ:ಪ:02-03 ದಿನಾಂಕ:20-05-2003.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಜಂಟಿ ಪೊಲೀಸ್ ಆಯುಕ್ತರು, (ಆಡಳಿತ) ಸಿ.ಎ.ಆರ್. ಬೆಂಗಳೂರು, ಇವರ ಆದೇಶ ಸಂಖ್ಯೆ: 49/ಅಪೀಲು/03-04 ದಿನಾಂಕ:26-05-2004.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:06-11-2004.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)66/2004, ದಿನಾಂಕ:21-06-2005.

ಪ್ರಸ್ತಾವನೆ:

ಶ್ರೀ ಲೋಕೇಶ್, ಎಚ್.ಸಿ.-1994, ಜೆ.ಜೆ.ನಗರ ಪೊಲೀಸ್ ಠಾಣೆ, ಬೆಂಗಳೂರು, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರ ಜೊತೆಗೆ 8ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲಾಗಿದೆ.

ದೋಷರೋಪಣೆ:

ಪಿ.ಸಿ.-2963 ಮರಿಮಾದಯ್ಯ, ಪಿ.ಸಿ.-2986 ನಾಗರಾಜು, ಕೆಂಗೇರಿ ಪೊಲೀಸ್ ಠಾಣೆ, ಬ್ಯಾಟರಾಯನಪುರ ಹೊಯ್ಸಳ-9ರ ಎಚ್.ಸಿ.-1994 ಲೋಕೇಶ ಮತ್ತು ಬಸವೇಶ್ವರನಗರ ಪೊಲೀಸ್ ಠಾಣೆಯ ಪಿಸಿ-6615 ಬಿ.ಎಂ. ತಿಮ್ಮೇಗೌಡ ಆದ ನೀವುಗಳು ದಿ:21-04-2002 ರಂದು ರಾತ್ರಿ 9-30 ಗಂಟೆಯ ಸಮಯದಲ್ಲಿ ಬ್ಯಾಟರಾಯನಪುರ ಪೊಲೀಸ್ ಠಾಣಾ ಸರಹದ್ದಿನ ರಾಜರಾಜೇಶ್ವರಿ ದೇವಸ್ಥಾನದ ಜಾತ್ರೆಯಲ್ಲಿ ಮೊಬೈಲ್ ಆರ್ಕೆಸ್ಟ್ರಾ ಮುಂದೆ ಡ್ಯಾನ್ಸ್ ಮಾಡುತ್ತಿದ್ದ ಅಮಾಯಕ ನಾಗರಾಜು ಎಂಬುವನ ಮೇಲೆ ವಿನಾಕಾರಣ ಲಾಠಿಗಳಿಂದ ಕೈಕಾಲು ಮತ್ತು ಬೆನ್ನಿನ ಮೇಲೆ ಹೊಡೆದು ಗಾಯಗೊಳಿಸಿರುತ್ತೀರಿ. ಈ ಸಂಬಂಧವಾಗಿ ಬ್ಯಾಟರಾಯನಪುರ ಪೊಲೀಸ್ ಠಾಣೆ ಮೊ.ನಂ.224/02 ಕಲಂ 324. 34 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿರುತ್ತೆ. ನಿಮ್ಮ ಕರ್ತವ್ಯದಲ್ಲಿನ ದುರ್ನಡತೆ ಹಾಗೂ ಅತೀವ ಅಶಿಸ್ತನ್ನು ತೋರಿಸಿರುತ್ತೀರಿ ಎಂದು ಸಹಾಯಕ ಪೊಲೀಸ್ ಕಮೀಷನರ್ ಕೆಂಗೇರಿಗೇಟ್‌ರವರ ಪ್ರಾಥಮಿಕ ಹಂತದ ವಿಚಾರಣೆಯಿಂದ ದೃಢಪಟ್ಟಿರುತ್ತದೆ.

ಮೇಲ್ಕಂಡ ಆರೋಪದ ಮೇಲೆ ಜಂಟಿ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ವರದಿಯನ್ನಾಧರಿಸಿ ಶ್ರೀ ಲೋಕೇಶ್, ಎಚ್.ಸಿ. ಇವರ ವಿರುದ್ಧ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಉಪ ಪೊಲೀಸ್ ಆಯುಕ್ತರು, ಪಶ್ಚಿಮ ವಿಭಾಗ, ಬೆಂಗಳೂರು, ಇವರು ಮೇಲೆ ಕ್ರಮ

ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ:20-05-2003ರ ಆದೇಶದಲ್ಲಿ ಅರ್ಜಿದಾರರ "ಒಂದು ವೇತನ ಬಡ್ತಿಯನ್ನು ಒಂದು ವರ್ಷಕಾಲ ಮುಂದಿನ ಮುಂಬಡ್ತಿಗೆ ಧಕ್ಕೆಯಾಗುವಂತೆ ದಂಡನೆಯನ್ನು ವಿಧಿಸಿ, ಅಮಾನತ್ತಿನ ಅವಧಿಯನ್ನು ಅಮಾನತ್ತೆಂದು ಪರಿಗಣಿಸಿ" ಆದೇಶಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಜಂಟಿ ಪೊಲೀಸ್ ಆಯುಕ್ತರು, (ಆಡಳಿತ) ಸಿ.ಎ.ಆರ್. ಬೆಂಗಳೂರು, ಇವರು ಮೇಲ್ಮನವಿಯಲ್ಲಿ ಪರಿಗಣಿಸ ಬಹುದಾದಂತಹ ಯಾವುದೇ ಅಂಶಗಳಿಲ್ಲವೆಂದು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 26-05-2004ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿದಾರರ ವಿರುದ್ಧದ ಆರೋಪವು ಸಾಬೀತಾಗಿದೆ. ಮೇಲ್ಮನವಿಯಲ್ಲಿ ತಿಳಿಸದಿರುವ ಯಾವುದೇ ಹೊಸ ಸಮರ್ಥನೀಯ ಅಂಶಗಳನ್ನು ಪ್ರಸ್ತಾಪಿಸದೆ ಇದ್ದುದರಿಂದ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 304 ಪೊಸಿಅ 2008 ಬೆಂಗಳೂರು, ದಿನಾಂಕ: 26ನೇ ಡಿಸೆಂಬರ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಲೋಕೇಶ್, ಎಚ್.ಸಿ.-1994, ಜೆ.ಜೆ.ನಗರ ಪೊಲೀಸ್ ಠಾಣೆ, ಬೆಂಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.298 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎಸ್. ಚಿಕ್ಕಸಿದ್ದಯ್ಯ, ಎ.ಎಸ್.ಐ., ತಿಲಕನಗರ, ಬೆಂಗಳೂರು ನಗರ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ನಿರೀಕ್ಷಕರು, ಬೆಂಗಳೂರು, ಇವರ ಆದೇಶ ಸಂಖ್ಯೆ: ಸಿಬಿ(5)14/2007-08, ದಿನಾಂಕ:02-05-2008.
2) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:18-07-2008.
3) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಸಿಬಿ(5)14/2007-08, ದಿನಾಂಕ:06-10-2008.

ಪ್ರಸ್ತಾವನೆ:

ಶ್ರೀ ಎಸ್. ಚಿಕ್ಕಸಿದ್ದಯ್ಯ, ಎ.ಎಸ್.ಐ., ತಿಲಕನಗರ, ಬೆಂಗಳೂರು ನಗರ, (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಇವರು ಈ ಹಿಂದೆ ಬೆಂಗಳೂರು ನಗರದ ಮಡಿವಾಳ ಪೊಲೀಸ್ ಠಾಣೆಯಲ್ಲಿ ಎಚ್.ಸಿ.ಆಗಿ ಠಾಣಾ ಬರಹಗಾರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಇವರು ಕರ್ತವ್ಯದಲ್ಲಿ ತೀವ್ರ ನಿರ್ಲಕ್ಷ್ಯತೆ, ಅಧಿಕಾರ ದುರುಪಯೋಗ, ಬೇಜವಾಬ್ದಾರಿತನ ಪ್ರದರ್ಶಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡಪಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಈ ಕೆಳಕಂಡ ದೋಷಾರೋಪಣೆಯನ್ನು ಹೊರಿಸಲಾಗಿತ್ತು.

ದೋಷರೋಪಣೆ:

"ಶ್ರೀ ಎಸ್. ಚಿಕ್ಕಸಿದ್ದಯ್ಯ, ಎ.ಎಸ್.ಐ., ಕಲಾಸಿಪಾಳ್ಯ ಪೊಲೀಸ್ ಠಾಣೆ, ಬೆಂಗಳೂರು ನಗರ, ಆದ ನೀವು ದಿ:22-09-2001 ರಿಂದ 10-04-2005ರ ವರೆಗೆ ಮಡಿವಾಳ ಪೊಲೀಸ್ ಠಾಣೆಯಲ್ಲಿ ಎಚ್.ಸಿ.-430 ಠಾಣಾ ಬರಹಗಾರರಾಗಿ ಕರ್ತವ್ಯ ನಿರ್ವಹಿಸಿದ್ದು, ದಿ:20-10-2002 ರಂದು ಪೊಲೀಸ್ ಕಮೀಷನರ್‌ರವರ ಕಛೇರಿಯಿಂದ ಪಾಸ್‌ಪೋರ್ಟ್ ವೆರಿಫಿಕೇಷನ್ ಬಗ್ಗೆ ಪಾಸ್‌ಪೋರ್ಟ್ ಅರ್ಜಿ ಸಂ:ಎಂ.ವಿ.5664/02-ಎ-27405/02 ಇದನ್ನು ಪಡೆದು ಮಡಿವಾಳ ಪೊಲೀಸ್ ಠಾಣೆಯ ದಾಖಲಾತಿಗಳಲ್ಲಿ ನಮೂದು ಮಾಡಿ, ಯಾವುದೋ ಆಮಿಷಕ್ಕೊಳಗಾಗಿ ಅರ್ಜಿದಾರರಾದ ಇಮ್ರಾನ್ ಜಲಾಲ್ ರವರ ವಾಸದ ಮನೆಯನ್ನು

ನೋಡದೇ ಅವರ ನೆರೆಹೊರೆಯವರನ್ನು ಅರ್ಜಿದಾರರ ವಾಸದ ಬಗ್ಗೆ ವಿಚಾರಣೆ ಮಾಡಿ ಹೇಳಿಕೆಯನ್ನು ಪಡೆದುಕೊಳ್ಳದೇ, ಅವರು ಸಲ್ಲಿಸಿದ್ದ ದಾಖಲಾತಿಗಳ ನೈಜತೆಯನ್ನು ಪರೀಕ್ಷಿಸದೇ, ಅರ್ಜಿದಾರರನ್ನು ಠಾಣೆಯ ಪಿ.ಐ. ರವರ ಮುಂದೆ ಹಾಜರುಪಡಿಸಿ ಪಿ.ಐ. ರವರಿಗೆ ತಪ್ಪು ಮಾಹಿತಿ ನೀಡಿ ಅರ್ಜಿದಾರರ ಪಾಸ್‌ಪೋರ್ಟ್‌ಗೆ ಸಂಬಂಧಿಸಿದ ವೆರಿಫಿಕೇಷನ್ ವಿವರಗಳನ್ನು ನೀವೇ ಸ್ವತ: ತುಂಬಿ, ಪಿ.ಐ. ರವರಿಂದ ಸಹಿ ಪಡೆದು ಅರ್ಜಿದಾರರು ಅಕ್ರಮವಾಗಿ ಪಾಸ್‌ಪೋರ್ಟ್ ಪಡೆಯಲು ಅವಕಾಶ ಮಾಡಿಕೊಟ್ಟು ನಿಮ್ಮ ಕರ್ತವ್ಯದಲ್ಲಿ ತೀವ್ರ ನಿರ್ಲಕ್ಷತೆ, ಅಧಿಕಾರ ದುರುಪಯೋಗ, ಬೇಜವಾಬ್ದಾರಿತನವನ್ನು ತೋರಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ನಿರೀಕ್ಷಕರು, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ:02-05-2008ರ ಆದೇಶದಲ್ಲಿ "ಅರ್ಜಿದಾರರ ಒಂದು ವಾರ್ಷಿಕ ವೇತನ ಬಡ್ತಿಗೆ ಧಕ್ಕೆಯಾಗದಂತೆ ಒಂದು ವರ್ಷ ಕಾಲ ಮುಂದೂಡುವ" ದಂಡನೆ ವಿಧಿಸಿರುತ್ತಾರೆ.

ಈ ಆದೇಶದ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ದಾಖಲೆಗಳನ್ನು ಪರಿಶೀಲಿಸಲಾಗಿದೆ. ಇವರ ವಿರುದ್ಧದ ಆರೋಪವು ಸಾಬೀತಾಗಿದ್ದು, ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಯಾವುದೇ ಹೊಸ ಸಮರ್ಥನೀಯ ಅಂಶಗಳು ಇರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 221 ಪೊಸಿಅ 2008 ಬೆಂಗಳೂರು, ದಿನಾಂಕ: 26ನೇ ಡಿಸೆಂಬರ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಸ್. ಚಿಕ್ಕಸಿದ್ದಯ್ಯ, ಎ.ಎಸ್.ಐ., ತಿಲಕನಗರ, ಬೆಂಗಳೂರು ನಗರ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ ಹಾಗೂ ಇವರು ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಅಮಾನತ್ತೆಂದೇ ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.297 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ನೀಲಪ್ಪ ಸೂರಪ್ಪ ಪಾಯಣ್ಣಿ, ಪಿ.ಸಿ.-884, 2ನೇ ಪಡೆ, ಕೆ.ಎಸ್.ಆರ್.ಪಿ. ಬೆಳಗಾವಿ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಕಮಾಂಡೆಂಟ್, 2ನೇ ಪಡೆ, ಕೆ.ಎಸ್.ಆರ್.ಪಿ. ಬೆಳಗಾವಿ ಜಿಲ್ಲೆ, ಇವರ ಆದೇಶ ಸಂಖ್ಯೆ: ಸಿಬ್ಬಂದಿ 3:ಇವಿ:49/483:2003-04 ದಿನಾಂಕ:05-08-2004.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕೆ.ಎಸ್.ಆರ್.ಪಿ., ಬೆಂಗಳೂರು, ಇವರ ಆದೇಶ ಸಂಖ್ಯೆ: ಅಪೀಲು/13/2004-05 ದಿನಾಂಕ:14-12-2004.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:07-02-2007.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)158/2006-07, ದಿನಾಂಕ:22-09-2008.

ಪ್ರಸ್ತಾವನೆ:

ಶ್ರೀ ನೀಲಪ್ಪ ಸೂರಪ್ಪ ಪಾಯಣ್ಣಿ, ಪಿ.ಸಿ.-884, 2ನೇ ಪಡೆ, ಕೆ.ಎಸ್.ಆರ್.ಪಿ. ಬೆಳಗಾವಿ ಜಿಲ್ಲೆ, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರಡಿ ಇಲಾಖಾ ವಿಚಾರಣೆ ನಡೆಸಲಾಗಿದೆ.

ದೋಷಾರೋಪಣೆ:

1. ನೀವು ದಿ: 11-02-2003 ಇ-3 ತುಕಡಿಂ ಮಲ್ಲೆ ಹುಬ್ಬಳ್ಳಿನಗರ ಕರ್ತವ್ಯದಲ್ಲಿದ್ದಾಗ ಸಮವಸ್ತ್ರದಲ್ಲಿದ್ದುಕೊಂಡು ಸರಾಯಿಕುಡಿದು ಕರ್ತವ್ಯ ಬೇಜವಾಬ್ದಾರಿ ಹಾಗೂ ದುರ್ವರ್ತನೆ ಪ್ರದರ್ಶಿಸಿದ ಆರೋಪ.

2. ಸರಾಯಿ ಕುಡಿತದ ಅಮಲಿನಲ್ಲಿ ಕರ್ತವ್ಯ ಮೇಲಿದ್ದ ಪ್ಲಟೂನ್ ಕಮಾಂಡರ್ ಹವಲ್ದಾರ್-33 ಕೆ.ಡಿ. ಪಾಟೀಲ ಇವರೊಂದಿಗೆ ಜಗಳ ತೆಗೆದು ಅವಾಚ್ಯ ಶಬ್ದಗಳಿಂದ ಪ್ಲಟೂನ ಸಿಬ್ಬಂದಿಗೆ ಬೈದದ್ದು ಅಲ್ಲದೆ ಶಿಸ್ತಿನ ಇಲಾಖೆಯಲ್ಲಿದ್ದು ಅಶಿಸ್ತಿನಿಂದ ಅಸಭ್ಯವಾಗಿ ವರ್ತಿಸಿದ ದುರ್ನಡತೆ ಆರೋಪ.

3. ಸರಾಯಿ ಕುಡಿತದ ಅಮಲಿನಲ್ಲಿ ಮೈಮೇಲೆ ಪ್ರಜ್ಞೆ ಇಟ್ಟುಕೊಳ್ಳದೇ ಸಾರ್ವಜನಿಕವಾಗಿ ಅಸಭ್ಯವಾಗಿ ಮಾತನಾಡಿ ಹಾಗೂ ಅಸಭ್ಯವಾಗಿ ವರ್ತಿಸಿ ಶಿಸ್ತಿನ ಇಲಾಖೆಯಲ್ಲಿದ್ದು ಶಿಸ್ತಿನ ಇಲಾಖೆಗೆ ತರವಲ್ಲದ ರೀತಿಯಲ್ಲಿ ಸಾರ್ವಜನಿಕವಾಗಿ ಪೊಲೀಸ್ ಇಲಾಖೆಗೆ ಕುಂದುಬರುವಂತೆ ವರ್ತಿಸಿ ದುರ್ನಡತೆ ಪ್ರದರ್ಶಿಸಿದ ಆರೋಪ.

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಕಮಾಂಡೆಂಟ್, 2ನೇ ಪಡೆ, ಕೆ.ಎಸ್.ಆರ್.ಪಿ. ಬೆಳಗಾವಿ ಜಿಲ್ಲೆ, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 05-08-2004ರ ಆದೇಶದಲ್ಲಿ ಅರ್ಜಿದಾರರನ್ನು ಸೇವೆಯಿಂದ ವಜಾಗೊಳಿಸಿ, ದಿ:11-02-03 ರಿಂದ 30-06-2003ರ ವರೆಗಿನ ಅಮಾನತ್ತಿನ ಅವಧಿಯನ್ನು ವೇತನ ರಹಿತ ರಜೆಯೆಂದು ಪರಿಗಣಿಸಿ ಆದೇಶಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕೆ.ಎಸ್.ಆರ್.ಪಿ., ಬೆಂಗಳೂರು, ಇವರು ಮೇಲ್ಮನವಿಯಲ್ಲಿ ಪರಿಗಣಿಸ ಬಹುದಾದಂತಹ ಯಾವುದೇ ಅಂಶಗಳಿಲ್ಲವೆಂದು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ:14-12-2004ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಇವರ ವಿರುದ್ಧದ ಆರೋಪವು ಸಾಬೀತಾಗಿದೆ, ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೆಯ ಅಂಶಗಳು ಇರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 59 ಪೊಸಿಅ 2008 ಬೆಂಗಳೂರು, ದಿನಾಂಕ: 26ನೇ ಡಿಸೆಂಬರ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ನೀಲಪ್ಪ ಸೂರಪ್ಪ ಪಾಯಣ್ಣಿ, ಪಿ.ಸಿ.-88, 2ನೇ ಪಡೆ, ಕೆ.ಎಸ್.ಆರ್.ಪಿ. ಬೆಳಗಾವಿ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.323 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಟಿ.ಡಿ. ಜಯರಾಂ, ಪೊಲೀಸ್ ಇನ್ಸ್‌ಪೆಕ್ಟರ್, ಶ್ರೀರಂಗಪಟ್ಟಣ ಪೊಲೀಸ್ ಠಾಣೆ, ಮಂಡ್ಯ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು ಇವರ ಆದೇಶ ಸಂಖ್ಯೆ:ಸಿಬ್ಬಂದಿ/ 21/2007-08 ದಿನಾಂಕ:23-06-2007.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಆದೇಶ ಸಂಖ್ಯೆ:ಸಿಬಿ(8)69/2007-08 ದಿನಾಂಕ:11-02-2008.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:20-03-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಸಿಬಿ(8)69/2007-08, ದಿನಾಂಕ:16-09-2008.

ಪ್ರಸ್ತಾವನೆ:

ಶ್ರೀ ಟಿ.ಡಿ. ಜಯರಾಂ, ಪೊಲೀಸ್ ಇನ್ಸ್‌ಪೆಕ್ಟರ್, ಇವರು ಶ್ರೀರಂಗಪಟ್ಟಣ ವೃತ್ತ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯಲೋಪ ಹಾಗೂ ನಿರ್ಲಕ್ಷ್ಯತೆಗಾಗಿ ಕರ್ನಾಟಕ

ರಾಜ್ಯ ಪೋಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಈ ಕೆಳಕಂಡ ದೋಷಾರೋಪಣೆಯನ್ನು ಹೊರಿಸಲಾಗಿತ್ತು.

ದೋಷರೋಪಣೆ:

"ಶ್ರೀ ಟಿ.ಡಿ. ಜಯರಾಂ ಆದ ನೀವು ದಿ:04-08-2003 ರಿಂದ ಶ್ರೀರಂಗಪಟ್ಟಣ ವೃತ್ತ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೀರಿ. ದಿ:13-04-2007 ರಂದು ಲೋಕಪಾವನಿ ನದಿಯಲ್ಲಿ ಮರಳು ತೆಗೆಯುವ ವಿಚಾರದಲ್ಲಿ ದಲಿತ ಕೋಮಿನವರಿಗೂ ಹಾಗೂ ಇತರೆ ಕೋಮಿನವರಿಗೂ ಗಲಾಟೆ ನಡೆದಿರುತ್ತದೆ. ನಿಮ್ಮ ವೃತ್ತ ವ್ಯಾಪ್ತಿಯಲ್ಲಿ ಬರುವ ಕೆ.ಶೆಟ್ಟಹಳ್ಳಿ ಗ್ರಾಮದಲ್ಲಿ ಈ ಮೇಲೆ ಹೇಳಿರುವ ಎರಡು ಕೋಮಿನ ಜನಾಂಗದವರ ನಡುವಿನ ವಿವಾದದ ಬಗ್ಗೆ ನೀವು ಮುಂಜಾಗ್ರತೆ ಕ್ರಮವಾಗಿ ಮಾಹಿತಿ ಸಂಗ್ರಹಿಸಿ ಗ್ರಾಮದಲ್ಲಿ ಗಲಭೆ ಆಗದಂತೆ ತಡೆಯಲು ಕ್ರಮ ಜರುಗಿಸುವಲ್ಲಿ ನೀವು ವಿಫಲರಾಗಿರುತ್ತೀರಿ. ಹಾಗೂ ಸ್ಥಾಯಿ ಆದೇಶ ಸಂಖ್ಯೆ 920ರ ಪ್ರಕಾರ ಕ್ರಮವನ್ನು ತೆಗೆದುಕೊಂಡಿರುವುದಿಲ್ಲ ಎಂಬುದು ಅಪರ ಪೋಲೀಸ್ ಅಧೀಕ್ಷಕರು, ಮಂಡ್ಯ ಜಿಲ್ಲೆ, ಮಂಡ್ಯ, ಇವರ ವರದಿ ಸಂಖ್ಯೆ:ಅಡಿಷನಲ್ ಎಸ್.ಪಿ./ವರದಿ/33/2007 ದಿ:22-04-2007 ರಿಂದ ತಿಳಿದು ಬಂದಿರುತ್ತದೆ. ಈ ವರದಿಯಿಂದ ನೀವು ನಿಮ್ಮ ಕರ್ತವ್ಯದಲ್ಲಿ ಲೋಪವೆಸಗಿರುವುದು ಮತ್ತು ನಿರ್ಲಕ್ಷ್ಯತೆಯಿಂದ ವರ್ತಿಸಿರುವುದು ಎದ್ದು ಕಾಣುತ್ತದೆ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೋಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 23-06-2007ರ ಆದೇಶದಲ್ಲಿ "ಅರ್ಜಿದಾರರ ಒಂದು ವಾರ್ಷಿಕ ವೇತನ ಬಡ್ತಿಯನ್ನು ಒಂದು ವರ್ಷಕಾಲ ಮುಂದಿನ ವಾರ್ಷಿಕ ವೇತನ ಬಡ್ತಿಗಳ ಮೇಲೆ ಪರಿಣಾಮ ಬೀರದಂತೆ ತಡೆಹಿಡಿಯುವ ದಂಡನೆಯನ್ನು" ವಿಧಿಸಿದ್ದಾರೆ.

ಈ ಆದೇಶದ ವಿರುದ್ದ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 11-02-2008ರ ಆದೇಶದಲ್ಲಿ ತಿರಸ್ಕರಿಸಿರುತ್ತಾರೆ.

ಈ ಆದೇಶದ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಯಾವುದೇ ಸಮರ್ಥನೀಯ ಕಾರಣಗಳು ಇರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 324 ಪೊಸಿಅ 2008 ಬೆಂಗಳೂರು, ದಿನಾಂಕ 26ನೇ ಡಿಸೆಂಬರ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೋಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಟಿ.ಡಿ. ಜಯರಾಂ, ಪೊಲೀಸ್ ಇನ್ಸ್‌ಪೆಕ್ಟರ್, ಶ್ರೀರಂಗಪಟ್ಟಣ ಪೊಲೀಸ್ ಠಾಣೆ, ಮಂಡ್ಯ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ ಹಾಗೂ ಇವರು ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಅಮಾನತ್ತೆಂದೇ ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 322

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೋಲೀಸ್ ಸೇವೆಗಳು)

ವಿಷಯ: ಶ್ರೀ ಎಸ್.ಎಂ. ಉಸ್ಮಾನ್, ಸಿ.ಪಿ.ಸಿ.-665, ಅಶೋಕನಗರ ಪೊಲೀಸ್ ಠಾಣೆ, ಗುಲ್ಬರ್ಗಾ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಗುಲ್ಬರ್ಗಾ, ಇವರ ಆದೇಶ ಸಂಖ್ಯೆ: ಪಿಆರ್/98/2007, ಓ.ಬಿ.ಸಂ:823/2006-07, ದಿನಾಂಕ: 06-08-2007.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಈಶಾನ್ಯ ವಲಯ, ಗುಲ್ಬರ್ಗಾ, ಆದೇಶ ಸಂಖ್ಯೆ: ಅಪೀಲು/92/ಈವ/2007, ದಿನಾಂಕ: 08-12-2007.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 24-12-2007.

4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)121/2007–08, ದಿನಾಂಕ: 19–08–2008.

ಪ್ರಸ್ತಾವನೆ:

ಶ್ರೀ ಎಸ್.ಎಂ. ಉಸ್ಮಾನ್, ಸಿ.ಪಿ.ಸಿ.–665, ಅಶೋಕನಗರ ಪೊಲೀಸ್ ಠಾಣೆ, ಗುಲ್ಬರ್ಗಾ ಜಿಲ್ಲೆ, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಈ ಕೆಳಕಂಡ ದೋಷಾರೋಪಣೆಯನ್ನು ಹೊರಿಸಲಾಗಿತ್ತು.

ದೋಷರೋಪಣೆ:

"ನೀವು ನಿಮ್ಮ ಠಾಣೆಯ ವ್ಯಾಪ್ತಿಯಲ್ಲಿ ದಿ:14–02–2007 ರಿಂದ 20–04–2007ರ ವರೆಗೆ ಕರ್ತವ್ಯಕ್ಕೆ ಅನಧಿಕೃತವಾಗಿ ಗೈರುಹಾಜರಾಗಿ ಕರ್ತವ್ಯದಲ್ಲಿ ದುರ್ನಡತೆ ಹಾಗೂ ಅಶಿಸ್ತು ತೋರಿಸಿದ ಬಗ್ಗೆ"

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಗುಲ್ಬರ್ಗಾ, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 06–08–2007ರ ಆದೇಶದಲ್ಲಿ "ಅರ್ಜಿದಾರರ ವಾರ್ಷಿಕ ವೇತನ ಬಡ್ತಿಯನ್ನು ಎರಡು ತಿಂಗಳುಗಳ ಕಾಲ ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ಧಕ್ಕೆಯಾಗದಂತೆ ಮುಂದೂಡಿ ದಿ:14–02–2007 ರಿಂದ 20–04–2007ರ ವರೆಗಿನ ಗೈರುಹಾಜರಾದ ಅವಧಿಯನ್ನು **ಸಂಬಳರಹಿತ ರಜೆ"** ಎಂದು ಪರಿಗಣಿಸಿ ಆದೇಶಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಈಶಾನ್ಯ ವಲಯ, ಗುಲ್ಬರ್ಗಾ, ಇವರು ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಯಾವುದೇ ಅಂಶಗಳಿಲ್ಲವೆಂದು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 08–12–2007ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿದಾರರು ಅನಧಿಕೃತವಾಗಿ ಗೈರುಹಾಜರಾಗಿರುವುದು ಸಾಬೀತಾಗಿದೆ. ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 158 ಪೊಸಿಅ 2008 ಬೆಂಗಳೂರು, ದಿನಾಂಕ: 26ನೇ ಡಿಸೆಂಬರ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಸ್.ಎಂ. ಉಸ್ಮಾನ್, ಸಿ.ಪಿ.ಸಿ.–665, ಅಶೋಕನಗರ ಪೊಲೀಸ್ ಠಾಣೆ, ಗುಲ್ಬರ್ಗಾ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.321 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಸಿ.ಡಿ. ಜಗದೀಶ್, ಪೊಲೀಸ್ ಸಬ್–ಇನ್ಸ್‌ಪೆಕ್ಟರ್, ತುಮಕೂರು, ಗ್ರಾಮಾಂತರ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಆದೇಶ ಸಂಖ್ಯೆ: ಅಪೀಲು (1)03/2006–07 ದಿನಾಂಕ:17–11–2008.
2) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:10–03–2008.
3) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)1/2008–09, ದಿನಾಂಕ:14–08–2008.

ಪ್ರಸ್ತಾವನೆ:

ಶ್ರೀ ಸಿ.ಡಿ. ಜಗದೀಶ್, ಪೊಲೀಸ್ ಸಬ್–ಇನ್ಸ್‌ಪೆಕ್ಟರ್, ಇವರು ತುಮಕೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಇವರ ವಿರುದ್ಧ ಕರ್ತವ್ಯದಲ್ಲಿ

ಬೇಜವಾಬ್ದಾರಿತನ ಮತ್ತು ಕರ್ತವ್ಯಲೋಪವೆಸಗಿರುವ ಕಾರಣದ ಮೇಲೆ ಪೂರ್ವಭಾವಿ ತನಿಖೆ ನಡೆಸಿ ಅದರ ಆಧಾರದ ಮೇಲೆ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆ ಹೊರಿಸಲಾಗಿದೆ.

ದೋಷರೋಪಣೆ:

1. ತುಮಕೂರು ಗ್ರಾಮಾಂತರ ಪೊಲೀಸ್ ಠಾಣೆ ಮೊ.ಸಂ.66:2004 ಕಲಂ 498(ಎ) 307, 114 ಜೊತೆಗೆ 34 ಐಪಿಸಿ ಪ್ರಕರಣದಲ್ಲಿ ನೀವು ದಿ:22-04-2004 ರಂದು ಆಸ್ಪತ್ರೆಯಿಂದ ಬಂದ ಇಂಟಿಮೇಷನ್ ಸ್ಲಿಪ್ ಅನ್ನು ಸ್ವೀಕರಿಸಿ ದಿ:26-04-2004ರವರೆಗೂ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡದೇ ಕರ್ತವ್ಯದಲ್ಲಿ ಬೇಜವಾಬ್ದಾರಿತನ ಮತ್ತು ನಿರ್ಲಕ್ಷ ತೆ ತೋರಿಸಿರುತ್ತೀರಿ.
2. ದಿ:22-04-2004 ರಿಂದ 26-04-2004ರವರೆಗೂ ತುಮಕೂರು ಗ್ರಾಮಂತರ ಪೊಲೀಸ್ ಠಾಣೆ ಮೊ.ಸಂ. 66:2004 ಕಲಂ 498(ಎ) 307, 114 ಜೊತೆಗೆ 34 ಐಪಿಸಿ ಪ್ರಕರಣದಲ್ಲಿ ನೀವು ಪಂಚನಾಮೆ ಮಾಡಿರುವುದಿಲ್ಲ ಹಾಗೂ ಕೃತ್ಯಕ್ಕೆ ಬಳಸಿದ ವಸ್ತುಗಳನ್ನು ವಶಪಡಿಸಿಕೊಳ್ಳದೇ ಪ್ರಕರಣವನ್ನು ಮುಚ್ಚಿಹಾಕುವ ಪ್ರಯತ್ನ ಮಾಡಿ ಕರ್ತವ್ಯದಲ್ಲಿ ಬೇಜವಾಬ್ದಾರಿತನ ಮತ್ತು ನಿರ್ಲಕ್ಷ್ಯತೆ ತೋರಿಸಿರುತ್ತೀರಿ.
3. ತುಮಕೂರು ಗ್ರಾಮಾಂತರ ಪೊಲೀಸ್ ಠಾಣೆ ಮೊ.ಸಂ.66:2004 ಕಲಂ 498(ಎ) 307, 114 ಜೊತೆಗೆ 34 ಐಪಿಸಿ ಪ್ರಕರಣದ ಬಗ್ಗೆ ನೀವು ದಿ:22-04-2004 ರಿಂದ 26-04-2004ರ ವರೆಗೂ ಯಾವುದೇ ಕ್ರಮ ಜರುಗಿಸದೇ ಮತ್ತು ಠಾಣಾ ದಿನಚರಿಯಲ್ಲೂ ಸಹಾ ನಮೂದು ಮಾಡದೇ ಕರ್ತವ್ಯದಲ್ಲಿ ಬೇಜವಾಬ್ದಾರಿತನ ಮತ್ತು ನಿರ್ಲಕ್ಷ್ಯತೆ ತೋರಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿಲ್ಲವೆಂದು ವರದಿ ನೀಡಿದ್ದು, ವಿಚಾರಣಾಧಿಕಾರಿಗಳ ವರದಿಯನ್ನು ಒಪ್ಪದೆ, ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 17-11-2008ರ ಆದೇಶದಲ್ಲಿ "ಅರ್ಜಿದಾರರ ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ಧಕ್ಕೆಯಾಗದಂತೆ ಆರು ತಿಂಗಳ ಕಾಲ ಮುಂದೂಡುವ ದಂಡನೆಯನ್ನು ವಿಧಿಸಿದ್ದಾರೆ ಹಾಗೂ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೇ ಪರಿಗಣಿಸಿದ್ದಾರೆ."

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿದಾರರು ತಮ್ಮ ವಿರುದ್ಧದ ಆರೋಪಗಳನ್ನು ಅಲ್ಲಗೆಳೆಯುವ ಸಮರ್ಥನೀಯ ಅಂಶಗಳನ್ನು ನೀಡಿರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 136 ಪೊಸಿಅ 2008 ಬೆಂಗಳೂರು, ದಿನಾಂಕ: 2ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಸಿ.ಡಿ. ಜಗದೀಶ್, ಪೊಲೀಸ್ ಸಬ್-ಇನ್ಸ್‌ಪೆಕ್ಟರ್, ತುಮಕೂರು, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.363

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಅಸ್ಲಾಂಪಾಷ, ಪಿ.ಸಿ.-146, ಡಿ.ಎ.ಆರ್., ಮೈಸೂರು, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಇವರ ಆದೇಶ ಸಂಖ್ಯೆ: ಡಿಇ/01/2007-08 ಓಬಿ:305/07-08, ದಿನಾಂಕ:17-01-2008.

2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರ ಆದೇಶ ಸಂಖ್ಯೆ:ಅಪೀಲು/ 63/2007-08 ದಿನಾಂಕ: 22-04-2008.

3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:20-06-2008.

4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)37/2007, ದಿನಾಂಕ:25-08-2008.

ಪ್ರಸ್ತಾವನೆ:

ಶ್ರೀ ಅಸ್ಲಾಂಪಾಷ, ಪಿ.ಸಿ.-146, ಡಿ.ಎ.ಆರ್., ಮೈಸೂರು, ಇವರು ಕ್ರಿಮಿನಲ್ ಮೊಕದ್ದಮೆಯೊಂದರಲ್ಲಿ ಭಾಗಿಯಾಗಿದ್ದರು ಎಂಬ ಕಾರಣಕ್ಕಾಗಿ ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರಡಿ ಇಲಾಖಾ ವಿಚಾರಣೆ ನಡೆಸಲಾಗಿದೆ.

ದೋಷಾರೋಪಣೆ:

"ಶ್ರೀ ಅಸ್ಲಾಂಪಾಷ, ಪಿ.ಸಿ.-146, ಡಿ.ಎ.ಆರ್., ಮೈಸೂರು, ರವರಾದ ನೀವು ದಿ:24/25-08-06 ರಂದು ರಾತ್ರಿ ತುಮಕೂರು ನಗರ ಕ್ಯಾತಸಂದ್ರ ಪೊಲೀಸ್ ಠಾಣಾ ಸರಹದ್ದಿ ನಲ್ಲಿರುವ ಶ್ರೀ ರಾಜ್ ಟಾಕೀಸ್ ಮುಂಭಾಗದ ಹಳೆಯ ರೈಲ್ವೆ ಬ್ರಿಡ್ಜ್ ಮೇಲೆ ಕ್ಯಾತಸಂದ್ರ ವಾಸಿ, ಶ್ರೀ ಮಸ್ತಾಕ್ ಅಹಮದ್, ರವರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿ, ಕ್ಯಾತಸಂದ್ರ ಪೊಲೀಸ್ ಠಾಣೆ ಮೊ.ಸಂ: 237/07 ಕಲಂ 307 ಐ.ಪಿ.ಸಿ. ಪ್ರಕರಣದ ಆರೋಪಿಯಾಗಿರುವುದರ ಮೂಲಕ ದುರ್ನಡತೆ ಪ್ರದರ್ಶಿಸಿರುವ ಬಗ್ಗೆ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಅಂತಿಮ ವರದಿಯನ್ನು ಶಿಸ್ತು ಪ್ರಾಧಿಕಾರವು ಒಪ್ಪದೆ, ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಮೈಸೂರು, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 17-01-2008ರ ಆದೇಶದಲ್ಲಿ "ಅರ್ಜಿದಾರರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ತದನಂತರದ ವೇತನ ಬಡ್ತಿಗಳಿಗೆ ಅಡ್ಡಿಯಾಗದಂತೆ ಆರು ತಿಂಗಳ ಕಾಲ ಮುಂದೂಡುವ ದಂಡನೆಯನ್ನು ವಿಧಿಸಿ ದಿ:09-12-06 ರಿಂದ 16-08-07ರ ವರೆಗಿನ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೇ ಪರಿಗಣಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರು ಶಿಸ್ತುಪ್ರಾಧಿಕಾರಿಯವರ ನಿರ್ಣಯ ಸಮಂಜಸವಾಗಿದೆಯೆಂದು ಪರಿಗಣಿಸಿ, ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ:22-04-2008ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇಲ್ಲದಿರುವುದರಿಂದ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 186 ಪೊಸಿಅ 2008 ಬೆಂಗಳೂರು, ದಿನಾಂಕ: 2ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಅಸ್ಲಾಂಪಾಷ, ಪಿ.ಸಿ.-146, ಡಿ.ಎ.ಆರ್., ಮೈಸೂರು, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.361

ಟಿ.ಎನ್. ರವಿಪ್ರಕಾಶ್,

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎನ್.ಎಚ್. ಗೌಡರ್, ಎ.ಎಸ್.ಐ., ಬಸವನಬಾಗೇವಾಡಿ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ: 1) ಶಿಸ್ತು ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರ ಆದೇಶ ಸಂಖ್ಯೆ:ಡಿಇ/48/ಉವ/97-98, ದಿನಾಂಕ:21-05-2003.

2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಆದೇಶ ಸಂಖ್ಯೆ:ಅಪೀಲು(6) 19/2003-04 ದಿನಾಂಕ:30-10-2004.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:09-03-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)20/2008-09, ದಿನಾಂಕ:28-08-2008.

ಪ್ರಸ್ತಾವನೆ:

ಶ್ರೀ ಎನ್.ಎಚ್. ಗೌಡರ್, ಎ.ಎಸ್.ಐ., ಇವರು ಬಸವನಬಾಗೇವಾಡಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಇವರೊಂದಿಗೆ ಇತರೇ 7 ಅಧಿಕಾರಿ ಮತ್ತು ಸಿಬ್ಬಂದಿಗಳ ವಿರುದ್ಧ ಅತೀವ ದುರ್ನಡತೆ ಹಾಗೂ ಕರ್ತವ್ಯಚ್ಯುತಿ ಎಸಗಿದ ಹಿನ್ನೆಲೆಯಲ್ಲಿ ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರ ಜೊತೆ 8ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲಾಗಿದೆ.

ದೋಷರೋಪಣೆ:

1. "ನೀವುಗಳು ಬಸವನಬಾಗೇವಾಡಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರತರಾದಾಗ ದಿ:27-05-98ರ ಮಧ್ಯಾಹ್ನ ಶ್ರೀ ಬಾಬು ಉರ್ಫ ಸುರೇಶ ಅಡದೊಡೆ ಈತನನ್ನು ಅನಧಿಕೃತವಾಗಿ ಠಾಣೆಗೆ ಕರೆತಂದು ಅಂದು ಮಧ್ಯಾಹ್ನ 12.00 ಗಂಟೆಯಿಂದ ದಿನಾಂಕ: 31-05-96ರ 00.30 ಗಂಟೆಯವರೆಗೆ ಬಾಗೇವಾಡಿ ಪೊಲೀಸ್ ಠಾಣೆಯ ಸಬಜೇಲದಲ್ಲಿ ಯಾವುದೇ ಪ್ರಕರಣ ದಾಖಲಿಸದೇ ಅಕ್ರಮ ಬಂಧನದಲ್ಲಿರಿಸಿ ಕರ್ತವ್ಯದಲ್ಲಿ ಅತೀವ ದುರ್ನಡತೆಯನ್ನು ಹಾಗೂ ಕರ್ತವ್ಯಚ್ಯುತಿ ಎಸಗಿರುವಿರಿ.
2. ಶ್ರೀ ಬಾಬು ಅದೋಡೆ ಈತನನ್ನು ಹಿಡಿದುಕೊಂಡು ಬರುವಾಗ ಅವನಿಗೆ ಹೊಡೆಬಡೆ ಮಾಡಿ ಅವನ ಪತ್ತಿರವಿದ್ದ ಹಣವನ್ನು ಕಿತ್ತುಕೊಂಡು ಮಾನಸಿಕ ಹಿಂಸೆಯನ್ನು ನೀಡಿ ನಿಮ್ಮ ಕರ್ತವ್ಯದಲ್ಲಿ ಅತೀ ದುರ್ನಡತೆಯನ್ನು ಪ್ರದರ್ಶಿಸಿರುವಿರಿ.
3. ಶ್ರೀ ಬಾಬು ಅದೋಡೆ, ಇವನ ಮೇಲೆ ದಿ: 31-05-96 ರಂದು ಸುಳ್ಳು ಕಾಗದಪತ್ರಗಳನ್ನು ತಯಾರಿಸಿ ಶ್ರೀ ಬಾಬು ಅದೋಡೆ, ಈತನನ್ನು ದಿ:30-05-96 ರಂದು ದಸ್ತಗೀರ ಮಾಡಿದ ಬಗ್ಗೆ ಖೈದಿಗಳ ಶೋಧನಾ ಪುಸ್ತಕದಲ್ಲಿ ನಮೂದಿಸಿ ನಿಮ್ಮ ಕರ್ತವ್ಯದಲ್ಲಿ ಅತೀವ ದುರ್ನಡತೆಯನ್ನು ಪ್ರದರ್ಶಿಸಿರುವಿರಿ.
4. ಶ್ರೀ ಬಾಬು ಅದೋಡೆ, ಈತನಿಗೆ ಪೊಲೀಸ್ ಠಾಣೆಯಲ್ಲಿ ಅಕ್ರಮ ಬಂಧನದಲ್ಲಿದ್ದಾಗ ಅವರ ಮೇಲೆ ಹಣವನ್ನು ಕಿತ್ತುಕೊಳ್ಳುವ ಉದ್ದೇಶದಿಂದ ದೌರ್ಜನ್ಯ ಎಸಗಿದ್ದುದರಿಂದ ಅವನು ದಿನಾಂಕ: 31-05-96 ರಂದು ಲಾಕಪ್ಪಿನಲ್ಲಿ ಮೃತಪಟ್ಟಿದ್ದು, ಇದನ್ನು ಮುಚ್ಚಿಹಾಕಲು ಹಾವು ಕಚ್ಚಿದ ಬಗ್ಗೆ ಸುಳ್ಳು ವದಂತಿಯನ್ನು ಹಬ್ಬಿಸಿ ನಿಮ್ಮ ಕರ್ತವ್ಯದಲ್ಲಿ ಅತೀವ ದುರ್ನಡತೆಯನ್ನು ಪ್ರದರ್ಶಿಸಿರುವಿರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 21-05-2003ರ ಆದೇಶದಲ್ಲಿ "ಅರ್ಜಿದಾರರ ಮುಂದಿನ ಮೂರು ವಾರ್ಷಿಕ ವೇತನ ಬಡ್ತಿಗಳನ್ನು ಮುಂಬರುವ ವಾರ್ಷಿಕ ವೇತನ ಬಡ್ತಿಗಳ ಮೇಲೆ ಪರಿಣಾಮ ಬೀರುವಂತೆ ಮೂರು ವರ್ಷಗಳ ಕಾಲ ಮುಂದೂಡಿ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಅಮಾನತ್ತೆಂದೇ ಪರಿಗಣಿಸುವ ದಂಡನೆಯನ್ನು" ವಿಧಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಯಾವುದೇ ಅಂಶಗಳಿಲ್ಲವೆಂದು ಅರ್ಜಿದಾರರ ಮೇಲ್ಮನವಿಯನ್ನು, ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 30-10-2004ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಇವರ ವಿರುದ್ಧದ ಆರೋಪಗಳು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುತ್ತದೆ ಅಲ್ಲದೇ ಪರಿಷ್ಕರಣ ಮೇಲ್ಮನವಿದಾರರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸಬಹುದಾದ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ ಹಾಗೂ

ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 342 ಪೊಸಿಅ 2008 ಬೆಂಗಳೂರು, ದಿನಾಂಕ: 2ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎನ್.ಎಚ್. ಗೌಡರ್, ಎ.ಎಸ್.ಐ., ಬಸವನಬಾಗೇವಾಡಿ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.360

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಜಿ. ನಾರಾಯಣ, ಪಿ.ಎಸ್.ಐ. ರಾಯಲಪಾಡು ಪೊಲೀಸ್ ಠಾಣೆ, ಕೋಲಾರ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರ ಆದೇಶ ಸಂಖ್ಯೆ: ಪನ್ಸಿ.ಡಿಇ:33: 98-99, ಓ.ಬಿ:192: 2001-02 ದಿನಾಂಕ:24-01-02.
2) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:17-03-2005.
3) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಪನ್ಸಿ.ಡಿಇ:33:98-99, ದಿನಾಂಕ: 23-06-2007.

ಪ್ರಸ್ತಾವನೆ:

ಶ್ರೀ ಜಿ. ನಾರಾಯಣ, ಪಿ.ಎಸ್.ಐ. ಶ್ರೀನಿವಾಸಪುರ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಕರ್ತವ್ಯಲೋಪ, ಅಧಿಕಾರ ದುರುಪಯೋಗ, ಲಂಚಗುಳಿತನ ಎಸಗಿರುವ ಆರೋಪದ ಮೇಲೆ ಇವರು ಮತ್ತು ಇನ್ನೊಬ್ಬರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6 & 8ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆ ಹೊರಿಸಲಾಗಿತ್ತು:

ದೋಷರೋಪಣೆ:

"ಶ್ರೀನಿವಾಸಪುರ ಪೊಲೀಸ್ ಠಾಣೆಯ ಮೊಕದ್ದಮೆ ಸಂಖ್ಯೆ: 5:99ರಲ್ಲಿ ದಿ: 07-01-1999 ರಂದು ಘಟನೆ ಸಂಭವಿಸಿದ್ದು, ಆ ಘಟನೆಗೆ ಸಂಬಂಧಪಟ್ಟ ಫಿರ್ಯಾದುದಾರರಾದ ಶ್ರೀಮತಿ ವೆಂಕಟಲಕ್ಷ್ಮಮ್ಮ, ಕಾನಗಮಾನಪನಹಳ್ಳಿ, ರೋಣೂರು ಹೋಬಳಿ, ಶ್ರೀನಿವಾಸಪುರ ತಾಲ್ಲೂಕು ರವರು ರಕ್ಷಣೆ ಕೊಡಲು ಕೋರಿದ್ದಕ್ಕೆ ಶ್ರೀನಿವಾಸಪುರ ಪೊಲೀಸ್ ಠಾಣೆಯ ಶ್ರೀ ಜಿ. ನಾರಾಯಣ, ಪಿ.ಎಸ್.ಐ. ಮತ್ತು ಶ್ರೀ ಪಿ. ನಾರಾಯಣಪ್ಪ, ಪಿ.ಸಿ.-519, ರೈಟರ್, ಇವರುಗಳು ಮೇಲ್ಕಂಡ ಫಿರ್ಯಾಧಿದಾರರಿಂದ ರಕ್ಷಣೆ ಕೊಡಲು 5,000/- ರೂ. ಲಂಚ ಕೊಡಲೇಬೇಕೆಂದು ಒತ್ತಾಯಿಸಿದ್ದು, ರೂ.1,200ಕ್ಕೆ ಇತ್ಯರ್ಥ ಮಾಡಿಕೊಂಡಿರುತ್ತಾರೆ.

ಫಿರ್ಯಾಧಿದಾರರಾದ ಶ್ರೀಮತಿ ವೆಂಕಟಲಕ್ಷ್ಮಮ್ಮ ಹಾಗೂ ಅವರ ಮೈದುನಾ ಶ್ರೀ ಎಂ. ಚನ್ನರಾಯಪ್ಪ, ರವರು ಹಣ ಕೊಡಲು ಇಷ್ಟವಿಲ್ಲದ ಕಾರಣ ಕೋಲಾರ ಲೋಕಾಯುಕ್ತಕ್ಕೆ ದಿ:11-01-1999 ರಂದು ದೂರು ನೀಡಿ ಆ ದೂರಿನ ಪ್ರಕಾರ ಶ್ರೀ ಜಿ. ನಾರಾಯಣ, ಪಿ.ಎಸ್.ಐ. ಮತ್ತು ಶ್ರೀ ಪಿ. ನಾರಾಯಣಪ್ಪ, ಪಿ.ಸಿ.-519, ರೈಟರ್, ಇವರುಗಳ ವಿರುದ್ಧ ಕೋಲಾರ ಲೋಕಾಯುಕ್ತ ಕಛೇರಿಯ ಮೊಕದ್ದಮೆ ಸಂಖ್ಯೆ: 1:99 ಕಲಂ 7,13(1) (ಡಿ) ಜೊತೆಗೆ 13(2) ಪಿ.ಸಿ.ಆಕ್ಟ್ 1988ರ ಪ್ರಕಾರ ಕೇಸ್ ದಾಖಲಾಗಿದ್ದು, ಅದರ ಅನ್ವಯ ಶ್ರೀನಿವಾಸಪುರ ಠಾಣೆಯ ಶ್ರೀ ಜಿ. ನಾರಾಯಣ, ಪಿ.ಎಸ್.ಐ. ಮತ್ತು ಶ್ರೀ ಪಿ. ನಾರಾಯಣಪ್ಪ, ಪಿ.ಸಿ.-519, ಇವರುಗಳು ಲಂಚ ಪಡೆಯುವಾಗ ಲೋಕಾಯುಕ್ತರವರು ದಾಳಿ ನಡೆಸಿ 1,200/- ರೂ.ಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ. ಆದ್ದರಿಂದ ಶ್ರೀ ಜಿ. ನಾರಾಯಣ, ಪಿ.ಎಸ್.ಐ. ಮತ್ತು ಶ್ರೀ ಪಿ. ನಾರಾಯಣಪ್ಪ, ಪಿ.ಸಿ.-519, ರೈಟರ್, ಇವರುಗಳು ಕರ್ತವ್ಯದ ದುರುಪಯೋಗ, ಕರ್ತವ್ಯಲೋಪ, ಅಧಿಕಾರ ದುರುಪಯೋಗ, ಲಂಚಗುಳಿತನ ಎಸಗಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ:

-01-02ರ ಆದೇಶದಲ್ಲಿ ಅರ್ಜಿದಾರರರಿಗೆ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ ಹುದ್ದೆಯ ಕನಿಷ್ಠ ಮಟ್ಟಕ್ಕೆ ಮುಂದಿನ ವೇತನ ಡ್ತಿಗಳಿಗೆ ಧಕ್ಕೆಯಾಗುವಂತೆ ಎರಡು ವರ್ಷಗಳ ಕಾಲ ಇಳಿಸಲಾಗಿದೆ ಹಾಗೂ ನಂತರ ವಾರ್ಷಿಕ ವೇತನ .ಬಡ್ತಿಯನ್ನು ಸದಾಗಿ ಸಂಪಾದಿಸತಕ್ಕದ್ದು ಹಾಗೂ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಅಮಾನತ್ತೆಂದೇ ಪರಿಗಣಿಸುವ ದಂಡನೆಯನ್ನು ಧಿಸಿದ್ದಾರೆ.

ಈ ಆದೇಶದ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ೕಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ೕಲ್ಮನವಿದಾರರ ವಿರುದ್ಧದ ಆರೋಪವು ಸಾಬೀತಾಗಿರುತ್ತದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಮರ್ಥನೀಯ ಅಂಶಗಳಿರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 249 ಪೊಸಿಅ 2007 ಬೆಂಗಳೂರು, ದಿನಾಂಕ: 1ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಜಿ. ನಾರಾಯಣ, ಪಿ.ಎಸ್.ಐ. ರಾಯಲಪಾಡು ಪೊಲೀಸ್ ಠಾಣೆ, ೋಲಾರ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

.ಆರ್.359

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎಚ್.ಎಂ. ಕಾಂತರಾಜು, ಪಿ.ಎಸ್.ಐ., ಶ್ರೀರಂಗಪಟ್ಟಣ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ ಮೈಸೂರು, ಇವರ ಆದೇಶ ಸಂಖ್ಯೆ: ಸಿಬ್ಬಂದಿ 21/2007-08 ದಿನಾಂಕ:23-06-2007.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು. ಇವರ ಆದೇಶ ಸಂಖ್ಯೆ: ಅಪೀಲು(6)/61/2007-08 ಓ.ಬಿ:85/07-08 ದಿನಾಂಕ: 17-01-2008.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:01-04-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು. ಬೆಂಗಳೂರು. ಇವರ ಪತ್ರ ಸಂಖ್ಯೆ: ಅಪೀಲು(2)48/2008-09, ದಿನಾಂಕ:26-09-2008.

ಸ್ತಾವನೆ:

ಶ್ರೀ ಎಚ್.ಎಂ. ಕಾಂತರಾಜು. ಪಿ.ಎಸ್.ಐ., ಶ್ರೀರಂಗಪಟ್ಟಣ ಪೊಲೀಸ್ ಠಾಣೆ, ಇವರ ಕರ್ತವ್ಯಲೋಪ ಹಾಗೂ ರ್ಲಕ್ಷತೆ ಕುರಿತಂತೆ ಡಿವೈ.ಎಸ್.ಪಿ., ಮಂಡ್ಯವಿಭಾಗ ಇವರಿಂದ ಪೂರ್ವಭಾವಿ ತನಿಖೆ ನಡೆಸಿ ಅದರ ಆಧಾರದ ಮೇಲೆ ವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ದೋಷಾರೋಪಣೆ ಹೊರಿಸಲಾಗಿದೆ.

ೋಷರೋಪಣೆ:

"ಶ್ರೀ ಹೆಚ್.ಎಂ. ಕಾಂತರಾಜು, ಆದ ನೀವು ದಿ:05-05-2006 ರಿಂದ ಶ್ರೀರಂಗಪಟ್ಟಣ ಪೊಲೀಸ್ ಠಾಣೆಯಲ್ಲಿ ಉಪನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೀರಿ. ದಿ:13-04-2007 ರಂದು ಲೋಕಪಾವನಿ ನದಿಯಲ್ಲಿ ಮರಳು ತೆಗೆಯುವ ವಿಚಾರದಲ್ಲಿ ದಲಿತ ಕೋಮಿನವರಿಗೂ ಹಾಗೂ ಇತರೆ ಕೋಮಿನವರಿಗೂ ಗಲಾಟೆ ನಡೆದಿರುತ್ತದೆ. ನಿಮ್ಮ ಠಾಣಾ ವ್ಯಾಪ್ತಿಯಲ್ಲಿ ಬರುವ ಕೆ.ಶೆಟ್ಟಿಹಳ್ಳಿ ಗ್ರಾಮದಲ್ಲಿ ಈ ಮೇಲೆ ಹೇಳಿರುವ ಎರಡು ಕೋಮಿನ ಜನಾಂಗದವರ ನಡುವಿನ ವಿವಾದದ ಬಗ್ಗೆ ನೀವು ಮುಂಜಾಗ್ರತೆ ಕ್ರಮವಾಗಿ ಮಾಹಿತಿ ಸಂಗ್ರಹಿಸಿ ಗ್ರಾಮದಲ್ಲಿ ಗಲಭೆ ಆಗದಂತೆ ತಡೆಯಲು ಕ್ರಮ ಜರುಗಿಸುವಲ್ಲಿ ನೀವು ವಿಫಲರಾಗಿರುತ್ತೀರಿ. ಹಾಗೂ ಸ್ಥಾಯಿ ಆದೇಶ ಸಂಖ್ಯೆ: 920ರ ಪ್ರಕಾರ ಕ್ರಮವನ್ನು ತೆಗೆದು ಕೊಂಡಿರುವುದಿಲ್ಲ ಎಂಬುದು ಅಪರ ಪೊಲೀಸ್

ಅಧೀಕ್ಷಕರು, ಮಂಡ್ಯಜಿಲ್ಲೆ, ಮಂಡ್ಯ ಇವರ ವರದಿ ಸಂಖ್ಯೆ/ ಅಡಿಸನಲ್ ಎಸ್.ಪಿ/ವರದಿ/33/2007, ದಿ:22-04-2007 ರಿಂದ ತಿಳಿದು ಬಂದಿರುತ್ತದೆ. ಈ ವರದಿಯಿಂದ ನೀವು ನಿಮ್ಮ ಕರ್ತವ್ಯದಲ್ಲಿ ಲೋಪವೆಸಗಿರುವುದು ಮತ್ತು ನಿರ್ಲಕ್ಷತೆಯಿಂದ ವರ್ತಿಸಿರುವುದು ಎದ್ದು ಕಾಣುತ್ತದೆ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ ಮೈಸೂರು, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ 23-06-2007ರ ಆದೇಶದಲ್ಲಿ "ಅರ್ಜಿದಾರರ ಒಂದು ವಾರ್ಷಿಕ ವೇತನ ಬಡ್ತಿಯನ್ನು ಎರಡು ವರ್ಷಗಳ ಕಾಲ ಮುಂದಿನ ವಾರ್ಷಿಕ ವೇತನ ಬಡ್ತಿಗಳ ಮೇಲೆ ಪರಿಣಾಮ ಬೀರದಂತೆ ತಡೆಹಿಡಿಯುವ ದಂಡನೆಯನ್ನು" ವಿಧಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಮೇಲ್ಮನವಿದಾರರಿಗೆ ವಿಧಿಸಿರುವ ದಂಡನೆಯು ಸಮಂಜಸವಾಗಿದೆ ಎಂದು ಪರಿಗಣಿಸಿ, ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ:17-01-2008ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿದಾರರು ಪರಿಷ್ಕರಣ ಮೇಲ್ಮನವಿಯಲ್ಲಿ ಪುರಸ್ಕರಿಸುವಂತಹ ಯಾವುದೇ ಹೊಸ ಸಮರ್ಥನೀಯ ಕಾರಣಗಳನ್ನು ನೀಡಿರುವುದಿಲ್ಲ. ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 323 ಪೊಸಿಅ 2008 ಬೆಂಗಳೂರು, ದಿನಾಂಕ: 1ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಚ್.ಎಂ. ಕಾಂತರಾಜು, ಪಿ.ಎಸ್.ಐ., ಶ್ರೀರಂಗಪಟ್ಟಣ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.358 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎಂ.ಸಿ. ದಶರಥಮೂರ್ತಿ, ಪೊಲೀಸ್ ಇನ್ಸ್‌ಪೆಕ್ಟರ್, ತರೀಕೆರೆ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರಿ ಹಾಗೂ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಪಶ್ಚಿಮ ವಲಯ, ಮಂಗಳೂರು, ಇವರ ಆದೇಶ ಸಂಖ್ಯೆ: ಸಿಬ್ಬಂದಿ/ಇವಿ 3/2005-06 ಓ.ಜಿ.ಸಂ:137/ 06-07 ದಿನಾಂಕ: 11-09-06.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಆದೇಶ ಸಂಖ್ಯೆ: ಸಿಬಿ (8)15/2007-08 ದಿನಾಂಕ: 31-08-2007.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:18-01-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಸಿಬಿ(8)15/2007-08, ದಿನಾಂಕ:02-09-2008.

ಪ್ರಸ್ತಾವನೆ:

ಶ್ರೀ ಎಂ.ಸಿ. ದಶರಥಮೂರ್ತಿ, ಇವರು ಪೊಲೀಸ್ ಇನ್ಸ್‌ಪೆಕ್ಟರ್, ತರೀಕೆರೆ ಪೊಲೀಸ್ ವೃತ್ತದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಅಧಿಕಾರ ದುರುಪಯೋಗ, ತೀವ್ರ ದುರ್ನಡತೆ, ಕರ್ತವ್ಯಲೋಪವೆಸಗಿದ ಆರೋಪದ ಮೇಲೆ ಇವರು ಮತ್ತು ಇತರೇ ಸಿಬ್ಬಂದಿಗಳ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6 & 8ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆ ಹೊರಿಸಲಾಗಿತ್ತು.

ದೋಷರೋಪಣೆ:

1. ಶ್ರೀ ಎಂ.ಸಿ. ದಶರಥಮೂರ್ತಿ, ಪೊಲೀಸ್ ನಿರೀಕ್ಷಕರು, ತರೀಕೆರೆ ಪೊಲೀಸ್ ಠಾಣೆ, ಆದ ನೀವು ಸದರಿ ಠಾಣೆಯ ಪ್ರಭಾರಾಧಿಕಾರಿಯಾಗಿದ್ದು ಕೊಂಡು ಗೌಪ್ಯವಾದ ವಿಷಯದ ಬಗ್ಗೆ ಠಾಣೆಯ ಎ.ಎಸ್.ಐ., ಶ್ರೀ. ದೇವರಾಜ್ ಸಿಪಿಸಿ-186, ಪಿ.ಸಿ.327, ಹಾಗೂ ಪಿ.ಸಿ.-386 ರವರುಗಳನ್ನು ಮುಂದಾಳತ್ವದಲ್ಲಿಟ್ಟುಕೊಂಡು ಕೆಲಸ ಕಾರ್ಯಗಳನ್ನು ಮಾಡಿಸುತ್ತಿರುವಿರಿ. ದಿ:07-01-05 ರಂದು 11-45 ಗಂಟೆಗೆ ಮೊದಲೇ ನಿಮ್ಮ ಆದೇಶದಂತೆ ತರೀಕೆರೆ ಠಾಣೆಯ ಅಪರಾಧ ವಿಭಾಗದ ಸಿಬ್ಬಂದಿಗಳು ಜೋಡಿಬೋಕಿಕೆರೆ ವಾಸಿ ಸಿದ್ದಪ್ಪ ಎಂಬ ಮುಗ್ಧ ರೈತಾಪಿಯೊಬ್ಬನನ್ನು ತರೀಕೆರೆ ಬಸ್ ನಿಲ್ದಾಣದ ಪತ್ತಿರದಿಂದ ಠಾಣೆಗೆ ಕರೆತಂದು ಆತನಿಗೆ ಬೆದರಿಕೆ ಒಡ್ಡಿ ತದನಂತರ ನಿಮ್ಮ ಆದೇಶದಂತೆ 07-01-05 ಎಂದು ರಾತ್ರಿ ಸುಮಾರು 24-00 ಗಂಟೆಗೆ ನಿಮಗೆ ಹಂಚಲಾದ ಇಲಾಖಾ ಜೀಪು ನಂ:ಕೆಎ-06ಜಿ-101 ರಲ್ಲಿ ಎ.ಎಸ್.ಐ. ಶ್ರೀ ದೇವರಾಜ್ ಮತ್ತು ಅಪರಾಧ ವಿಭಾಗದ ಸಿಬ್ಬಂದಿಗಳಾದ ಸಿಪಿಸಿ-186, 603, 604 ಮತ್ತು ಗುಪ್ತ ವಿಭಾಗದ ಸಿಪಿಸಿ-327, ಮತ್ತು ಕಂಪ್ಯೂಟರ್ ವಿಭಾಗದ ಸಿಪಿಸಿ-386, ರವರುಗಳು ಮೇಲ್ಕಂಡ ಸಿದ್ಧಪ್ಪನನ್ನು ಜೋಡಿ ಬೋಕಿಕೆರೆ ಗ್ರಾಮಕ್ಕೆ ಕರೆದೊಯ್ದು ಅಲ್ಲಿಂದ ಶ್ರೀ ಎಸ್. ಗಿರೀಶ್ ಹಾಗೂ ಜಿ.ಒ.ಮಂಜಪ್ಪ ಎಂಬವರನ್ನು ಕೂಡಾ ಜೀಪಿನಲ್ಲಿ 7/8-1-05ರ ರಾತ್ರಿ ಸುಮಾರು 1-30 ಗಂಟೆಗೆ ಠಾಣೆಗೆ ಕರೆತಂದು ಅವರೆಲ್ಲರನ್ನೂ ಠಾಣೆಯಲ್ಲಿ ಅಕ್ರಮ ಬಂಧನ ದಲ್ಲಿರಿಸಿದ್ದಲ್ಲದೆ ಮಂಜಪ್ಪ ಎಂಬವರಿಗೆ ಕಳ್ಳತನ ಮಾಡಿದ್ದನ್ನು ಒಪ್ಪಿಕೋ ಎಂದು ಹೇಳಿ ಹಿಂಸೆಗೆ ಒಳಪಡಿಸಲು ಕಾರಣಕರ್ತರಾಗಿ ಅಧಿಕಾರ ದುರುಪಯೋಗಪಡಿಸಿ ತೀವ್ರ ದುರ್ನಡತೆ ತೋರ್ಪಡಿಸಿರುವಿರಿ;

2. ಶ್ರೀ ಎಂ.ಸಿ. ದಶರಥಮೂರ್ತಿ, ಪೊಲೀಸ್ ನಿರೀಕ್ಷಕರು, ತರೀಕೆರೆ ಪೊಲೀಸ್ ಠಾಣೆ, ಆದ ನಿಮ್ಮ ಆದೇಶದಂತೆ ಠಾಣೆಗೆ ತಂದು ಅಕ್ರಮ ಬಂಧನದಲ್ಲಿರಿಸಿಕೊಂಡಿದ್ದ ಸಿದ್ಧಪ್ಪ, ಗಿರೀಶ ಮತ್ತು ಮಂಜಪ್ಪನವರಿಂದ ಯಾವುದೇ ಸೊತ್ತು ಸ್ವಾಧೀನ ಪಡಿಸಿಕೊಳ್ಳಲು ಸಾಧ್ಯವಾಗದೇ ಇದ್ದು, ನೀವು ದಿ:08-01-05 ರಂದು ಬೆಳಿಗ್ಗೆ ಸುಮಾರು 8-30 ಗಂಟೆಗೆ ಠಾಣೆಗೆ ಬಂದ ಗ್ರಾಮದ ಸಣ್ಣತಿಮ್ಮಪ್ಪ ಮತ್ತು ಇತರರಿಗೆ ಜೋರು ಮಾಡಿ ಗಿರೀಶ್ ಮತ್ತು ಸಿದ್ಧಪ್ಪರವರನ್ನು ಬಿಟ್ಟು ಕಳುಹಿಸಿರುವಿರಿ. ಆದರೆ ಮಂಜಪ್ಪನ ವಿರುದ್ಧ ಕಂಪ್ಲೈಂಟ್ ಇದೆ ಎಂದು ಹೇಳಿ ಆತನ ಅಕ್ರಮ ಬಂಧನವನ್ನು ದಿ:7/8-01-05 ರಂದು 01-30ಗಂಟೆಯಿಂದ ದಿನಾಂಕ: 8/9-01-05 ರಂದು 5-00 ಗಂಟೆಯವರೆಗೆ ಮುಂದುವರಿಸಿರುವಿರಿ. ಅಲ್ಲದೆ ಮಂಜಪ್ಪನಿಗೆ ಹಿಂಸೆ ನೀಡಿರುವುದನ್ನು ಮರೆಮಾಚುವ ಸಲುವಾಗಿ ರಜೆ ಮುಗಿಸಿ ದಿ:08-01-05ರಂದು ಕರ್ತವ್ಯಕ್ಕೆ ಹಾಜರಾದ ಎಚ್.ಸಿ. ಚೌಡಯ್ಯ ರವರಿಗೆ ಮಂಜಪ್ಪನನ್ನು ರಾತ್ರಿ ಅನುಮಾನಾಸ್ಪದವಾಗಿ ತಿರುಗಾಡುತ್ತಿದ್ದ ವ್ಯಕ್ತಿಯೆಂದು ಪರಿಗಣಿಸಲು ಮತ್ತು ಆತನನ್ನು ಎಚ್.ಸಿ.-02 ರವರು ಇತರೇ ಸಿಬ್ಬಂದಿಗಳೊಂದಿಗೆ ಗಸ್ತಿನಲ್ಲಿದ್ದಾಗ ಹಿಡಿದುಕೊಂಡು ಬಂದಂತೆ ನಮೂದಿಸಿ ಆತನ ಮೇಲೆ ಕಲಂ: 109 ಸಿಆರ್‌ಪಿಸಿ.ಯಂತೆ ಪ್ರಕರಣ ದಾಖಲಿಸಲು ಎಚ್.ಸಿ.-02 ರವರಿಗೆ ಹೇಳಿದಂತೆ ಸದರಿ ಎಚ್.ಸಿ. ರವರು ಮಂಜಪ್ಪನನ್ನು ದಿ:8/9-01-05 ರಂದು ರಾತ್ರಿ 3-30 ಗಂಟೆಗೆ ಗಸ್ತಿನಲ್ಲಿದ್ದಾಗ ಹಿಡಿದು 5-00 ಗಂಟೆಗೆ ದಸ್ತಗಿರಿ ಮಾಡಿದಂತೆ ತೋರಿಸಿ, ಆತನ ವಿರುದ್ಧ ತರೀಕೆರೆ ಠಾಣಾ ಮೊ.ನಂ.3/05 ಕಲಂ:109 ಸಿಆರ್‌ಪಿಸಿ ಯಂತೆ ಅಧೀನ ಸಿಬ್ಬಂದಿ ಮುಖೇನ ಸುಳ್ಳು ಪ್ರಕರಣ ದಾಖಲಿಸಿ ಕಾರಣಕರ್ತರಾಗಿ ಅಧಿಕಾರ ದುರುಪಯೋಗ ಮತ್ತು ತೀವ್ರ ದುರ್ನಡತೆ ತೋರ್ಪಡಿಸಿರುವಿರಿ.

3. ಶ್ರೀ ಎಂ.ಸಿ. ದಶರಥಮೂರ್ತಿ, ಪೊಲೀಸ್ ನಿರೀಕ್ಷಕರು, ತರೀಕೆರೆ ಪೊಲೀಸ್ ಠಾಣೆ, ಆದ ನಿಮ್ಮ ಆದೇಶದಂತೆ ಸಿಬ್ಬಂದಿಗಳು ಸಿದ್ಧಪ್ಪ, ಗಿರೀಶ ಹಾಗೂ ಮಂಜಪ್ಪರನ್ನು ಠಾಣೆಗೆ ಕರೆತಂದಿದ್ದ ಸಂದರ್ಭದಲ್ಲಿ ತರೀಕೆರೆ ಗುಜರಿ ಅಂಗಡಿಯ ಭಾಷಾ ಮತ್ತು ಜಾಫರ್ ಎಂಬುವವರನ್ನು ಕೂಡಾ ನಿಮ್ಮ ಆದೇಶದಂತೆ ಶ್ರೀ ದಾದಾಪೀರ್ ಸಿಪಿಸಿ-186, ಶ್ರೀ ವರ್ಗೀಸ್, ಸಿಪಿಸಿ-327 ರವರು ಠಾಣೆಗೆ ಕರೆತಂದು ಕಳವು ಕೇಸಿನ ಮಾಲುಗಳನ್ನು (ಡ್ರಿಪ್‌ವೈರ್) ಮೇಲ್ಕಂಡವರು ನಿಮ್ಮ ಅಂಗಡಿಗೆ ಕೊಟ್ಟಿರುವುದಾಗಿ ಹೇಳಿರುತ್ತಾರೆ, ನಿಮ್ಮನ್ನು ಕೂಡಾ ಪ್ರಕರಣದಲ್ಲಿ ಸಿಲುಕಿಸುವುದಾಗಿ ಬೆದರಿಸಿ ಅವರುಗಳನ್ನು ಬಿಡಿಸಲು ಮಧ್ಯಸ್ಥಿಕೆ ವಹಿಸಲು ಬಂದ ಮಹಮ್ಮದ್ದ ರಷೀಕ್‌ರವರಿಗೆ ಶ್ರೀ.ದಾದಾಪೀರ್ ಸಿಪಿಸಿ-186 ಮತ್ತು ಶ್ರೀ.ವರ್ಗೀಸ್. ಸಿಪಿಸಿ-327, ರವರು ನಿಮ್ಮ ಸೂಚನೆಯ ಮೇರೆಗೆ ರೂ:10,000/- ಸಾಹೇಬರಿಗೆ ಮತ್ತು ರೂ:7,000/-ನ್ನು ಸ್ಟಾಫ್‌ಗೆ ಕೊಡಬೇಕೆಂದು ಒತ್ತಾಯಿಸಿ ನಂತರ ರೂ:15,000/-ಕ್ಕೆ ವ್ಯವಹಾರ ಕುದಿರಿಸಿ ಶ್ರೀ ಭಾಷಾರವರಿಂದ ರೂ: 15,000/- ಅಕ್ರಮ ಸಂಭಾವನೆಯನ್ನು ನಿಮ್ಮ ಸೂಚನೆಯ ಮೇರೆಗೆ ಸ್ವೀಕರಿಸಿರುವರು. ಠಾಣೆಯ ಜವಾಬ್ದಾರಿಯುತ ಅಧಿಕಾರಿಯಾದ ನೀವು ಸಿಬ್ಬಂದಿಗಳ ಮುಖೇನ, ಅಕ್ರಮ ಸಂಭಾವನೆ ನೀಡುವಂತೆ ಒತ್ತಾಯಿಸಿ, ಸಿಬ್ಬಂದಿಗಳ ಮುಖೇನ ಅಕ್ರಮ ಸಂಭಾವನೆ ಸ್ವೀಕರಿಸಿ ಸರಕಾರಿ ನೌಕರನಿಗೆ ತರವಲ್ಲದ ರೀತಿಯಲ್ಲಿ ತೀವ್ರ ದುರ್ನಡತೆ ತೋರ್ಪಡಿಸಿರುವಿರಿ.

4. ಶ್ರೀ ಎಂ.ಸಿ. ದಶರಥಮೂರ್ತಿ, ಪೊಲೀಸ್ ನಿರೀಕ್ಷಕರು, ತರೀಕೆರೆ ಪೊಲೀಸ್ ಠಾಣೆ, ಆದ ನಿಮ್ಮ ಸೂಚನೆಯ ಮೇರೆಗೆ ಶ್ರೀ ದಾದಾಪೀರ್ ಸಿಪಿಸಿ-186 ಮತ್ತು ಶ್ರೀ ವರ್ಗೀಸ್, ಸಿಪಿಸಿ-327, ರವರು ಗುಜರಿ ಅಂಗಡಿಯ ಜಾಫರ್‌ರವರಿಂದ 2 ಚೀಲ ಹಳೆಯ ಡ್ರಿಪ್‌ವೈರ್ ಪಡೆದು ಅವರನ್ನು ಠಾಣೆಯಿಂದ ಕಳುಹಿಸಿದ ನಂತರ ಪುನ ಸಿಬ್ಬಂದಿಗಳ ಮುಖೇನ ಹೊಸ ಡ್ರಿಪ್‌ವೈರ್‌ಗಳನ್ನು ಕೊಡುವಂತೆ ಅವರಿಗೆ ಒತ್ತಾಯಿಸಿ ಐದು ಬಂಡಲ್ ಹೊ ಡ್ರಿಪ್‌ವೈರನ್ನು ಪಡೆದು ಒಂದು ಚೀಲ ಹಳೇ ವೈರನ್ನು ಹಿಂತಿರುಗಿಸಿರುವಿರಿ. ಮೇಲಿನಂತೆ ಕಾನೂನ ಬಾಹಿರವಾಗಿ ವಶಪಡಿಸಿಕೊಂಡ ಡ್ರಿಪ್‌ವೈರ್‌ಗಳನ್ನು ತರೀಕೆರೆ ಠಾಣೆಯ ಡಿಸೆಂಬರ್ 2004 ಮತ್ತು ಜನವ 2005ನೇ ತಿಂಗಳ ಯಾವುದೇ ಪ್ರಕರಣದ ಅಥವಾ ಸೊತ್ತು ಪಟ್ಟಿಯಲ್ಲಿ ನಮೂದಿಸದೆ ಅದು ಠಾಣೆಯಿಂ ಕಾಣೆಯಾಗಿದ್ದು ಅದರ ದುರುಪಯೋಗವಾಗಿ, ಸಾರ್ವಜನಿಕವಾಗಿ ಇಲಾಖಾ ಗೌರವಕ್ಕೆ ಕುಂದುಂಟಾಗಲ ಕಾರಣಕರ್ತರಾಗಿ ತೀವ್ರ ದುರ್ನಡತೆ ತೋರ್ಪಡಿಸಿರುವಿರಿ.

5. ಶ್ರೀ ಎಂ.ಸಿ. ದಶರಥಮೂರ್ತಿ, ಪೊಲೀಸ್ ನಿರೀಕ್ಷಕರು, ತರೀಕೆರೆ ಪೊಲೀಸ್ ಠಾಣೆ, ಆದ ನೀವು ಠಾಣ ಪ್ರಭಾರಾಧಿಕಾರಿಯಾಗಿ ಠಾಣೆಯ ಜವಾಬ್ದಾರಿಯುತ ಸ್ಥಾನದಲ್ಲಿದ್ದುಕೊಂಡು ಅಧೀನ ಅಧಿಕಾರಿ/ಸಿಬ್ಬಂದಿಗಳಿ ಮಾದರಿ ಹಾಗೂ ಮಾರ್ಗದರ್ಶಕರಾಗಿರ ಬೇಕಾದವರು ನಿರಪರಾಧಿ ಮಂಜಪ್ಪನ ಮೇಲೆ ಕಲಂ:10 ಸಿಆರ್‌ಪಿಸಿ ಯಂತೆ ಸುಳ್ಳು ಪ್ರಕರಣ ದಾಖಲಿಸುವಂತೆ ಮತ್ತು ನಿರಪರಾಧಿಗಳಿಂದ ಅಕ್ರಮ ಸಂಭಾವ ಸ್ವೀಕರಿಸುವಂತೆ ಅಧೀನ ಸಿಬ್ಬಂದಿಗಳಿಗೆ ಪ್ರಚೋದಿಸಿ ಅವರನ್ನು ತಪ್ಪು ಮಾರ್ಗಕ್ಕೆಳೆದು ಅದರಲ್ಲಿ ಯಶಸ್ವಿಯಾ ಸರ್ಕಾರಿ ನೌಕರನಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ ತೀವ್ರ ದುರ್ನಡತೆ ಹಾಗೂ ಕರ್ತವ್ಯಲೋ ಎಸಗಿರುವಿರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು 5 ಆರೋಪಗಳಲ್ಲಿ (1) ಮತ (5) ಭಾಗಶ: ಸಾಬೀತಾಗಿರುವುದಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದ ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪಶ್ಚಿಮ ವಲಯ, ಮಂಗಳೂರು, ಇವರ ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 11-09-06ರ ಆದೇಶದಲ್ಲಿ ಅರ್ಜಿದಾರರ ಒಂದು ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ದಕ್ಕೆಯಾಗದಂತೆ ಎರಡು ವರ್ಷಗಳ ಕಾಲ ಮುಂದೂಡು ದಂಡನೆಯನ್ನು ವಿಧಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಅರ್ಜಿದಾರರ ಮೇಲ್ಮನವಿಯನ್ನು ಮೇ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 31-08-2007ರ ಆದೇಶದಲ್ಲಿ ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಇವ ವಿರುದ್ಧದ ಆರೋಪಗಳು ಭಾಗಶ: ಸಾಬೀತಾಗಿದ್ದು, ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತ ಸಮರ್ಥನೀಯವಾದ ಯಾವುದೇ ಹೊಸ ಅಂಶಗಳು ಇರುವುದಿಲ್ಲ. ಸಾಬೀತಾಗಿರುವ ಆರೋಪಕ್ಕೆ ದಂಡನೆಯ ಪ್ರಮಾಣ ಸರಿಯೆಂದು ಕಂಡುಬರುವುದರಿಂದ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯ ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 357 ಪೊಸಿಅ 2008 ಬೆಂಗಳೂರು, ದಿನಾಂಕ: 5ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಂ.ಸಿ. ದಶರಥಮೂರ್ತಿ, ಪೊಲೀಸ್ ಇನ್ಸ್‌ಪೆಕ್ಟರ್, ತರೀಕೆ ಪೊಲೀಸ್ ಠಾಣೆ ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.357

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು

ವಿಷಯ: ಶ್ರೀ ನಂಜುಂಡೇಗೌಡ, ಪೊಲೀಸ್ ಸಬ್-ಇನ್ಸ್‌ಪೆಕ್ಟರ್, ಬಸವನಹಳ್ಳಿ, ಚಿಕ್ಕಮಗಳೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಚಿಕ್ಕಮಗಳೂರು ಜಿಲ್ಲೆ, ಇವರ ಆದೇಶ ಸಂಖ್ಯೆ: ಡಿಇ 11/2006 ಓ.ಬಿ.ಸಂ:56/2007, ದಿನಾಂಕ:29-03-07.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಪಶ್ಚಿಮ ವಲಯ, ಮಂಗಳೂರು, ಇವರ ಆದೇಶ ಸಂಖ್ಯೆ: ಸಿಬ್ಬಂದಿ 2/ಮೇಲ್ಮನವಿ/10/ 2007 ದಿನಾಂಕ: 22-02-2008.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:30-06-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)39/2008-09, ದಿನಾಂಕ:22-09-2008.

ಪ್ರಸ್ತಾವನೆ:

ಶ್ರೀ ನಂಜುಂಡೇಗೌಡ, ಪೊಲೀಸ್ ಸಬ್-ಇನ್ಸ್‌ಪೆಕ್ಟರ್, ಇವರು ಕೊಪ್ಪ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಕರ್ತವ್ಯ ವಿಮುಖತೆ ಹಾಗೂ ನಿರ್ಲಕ್ಷತೆಗಾಗಿ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆ ಹೊರಿಸಲಾಗಿತ್ತು.

ದೋಷಾರೋಪಣೆ:

1. ಶ್ರೀಮತಿ ಯಶೋಧ, ಹಿರೇಕೆರೆ ವಾಸಿ ಇವರ ಮನೆಯಲ್ಲಿ ಎರಡು ಬಾರಿ ಕಳ್ಳತನವಾಗಿದ್ದು, ಒಮ್ಮೆ ಕೋಳಿ ಕಳ್ಳತನವಾಗಿ ಈ ಸಂಬಂಧ ಪ್ರಕರಣ ದಾಖಲಿಸದೇ ಇದ್ದ ಬಗ್ಗೆ.
2. ಕೊಪ್ಪ ಠಾಣಾ ಮೊ.ನಂ: 96/05 ಕಲಂ 504, 307, 324, 506, 34 ಐಪಿಸಿ ಪ್ರಕರಣದ ಆರೋಪಿ ರವೀಂದ್ರ ಆಸ್ಪತ್ರೆಯಲ್ಲಿ ದಾಖಲಾಗಿದ್ದು, ಆತನ ಬೆಂಗಾವಲಿಗೆ ಸಿಬ್ಬಂದಿ ನೇಮಿಸಲು ಮೇಲಾಧಿಕಾರಿಗಳು ತಿಳಿಸಿದರೂ ಸಹ ನೇಮಿಸದೆ, ಬಿಡುಗಡೆಯಾಗಿ ತಲೆಮರೆಸಿಕೊಳ್ಳಲು ಕಾರಣಕರ್ತರಾಗಿರುತ್ತೀರಿ, ಅಲ್ಲದೇ ಜಾಮೀನು ನಿರೀಕ್ಷಣೆಗೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಟ್ಟಿರುತ್ತೀರಿ.
3. ನಂಜುಂಡೇಗೌಡ, ಪಿ.ಎಸ್.ಐ. ಆದ ನಿಮಗೆ ವಲಯ ಕಛೇರಿಯಿಂದ ಕೊಪ್ಪ ಪೊಲೀಸ್ ಠಾಣೆಯಿಂದ ಬಸವನಹಳ್ಳಿ ಪೊಲೀಸ್ ಠಾಣೆಗೆ ವರ್ಗಾವಣೆಯಾಗಿದ್ದು, ನೀಡಲಾದ ಆದೇಶದಲ್ಲಿ ನಿಯೋಜಿಸಲಾದ ಸ್ಥಳದಲ್ಲಿ ಯಾವುದೇ ಸೇರುವಿಕೆ ಕಾಲವನ್ನು ಉಪಯೋಗಿಸಿಕೊಳ್ಳದೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ತಿಳಿಸಿದ್ದರೂ ದಿನಾಂಕ: 29-12-2005 ರಿಂದ ಅನಾರೋಗ್ಯ ಕಾರಣ ಎ.ಎಸ್.ಐ. ರವರಿಗೆ ಛಾರ್ಜ್ ವಹಿಸಿ ಯಾವುದೇ ಮಾಹಿತಿ ನೀಡದೇ ಹೋಗಿರುವ ಬಗ್ಗೆ.
4. ವಲಯ ಕಛೇರಿಯ ಆದೇಶದಲ್ಲಿ ಸಣ್ಣತಮ್ಮಯ್ಯಪ್ಪ ಒಡೆಯರ್, ಪಿ.ಎಸ್.ಐ. ರವರಿಗೆ ಪೂರ್ಣಪ್ರಭಾರೆ ವಹಿಸಿಕೊಡದೇ ನಿರ್ಲಕ್ಷ್ಯತೆ ತೋರಿರುವ ಬಗ್ಗೆ.
5. ದಿ:29-12-2005 ರಿಂದ ಹೊರಟು ಹೋದವರು ಇದುವರೆಗೂ ನಿಮ್ಮ ಇರುವಿಕೆಯ ಬಗ್ಗೆ ಯಾವುದೇ ಮಾಹಿತಿ ನೀಡದೇ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ನಿರ್ಲಕ್ಷತನ ತೋರಿರುವ ಬಗ್ಗೆ.
6. ಪ್ರಧಾನ ಕಛೇರಿಯ ಸುತ್ತೋಲೆಯಲ್ಲಿ ಹೊಸದಾಗಿ ವರ್ಗಾವಣೆ ಹೊಂದಿದಂತಹ ಅಧಿಕಾರಿಗಳು ಹೊಸದಾಗಿ ನಿಯೋಜಿಸಲಾದ ಸ್ಥಳದಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೇ ರಜೆಯ ಮೇಲೆ ತೆರಳಬಾರದು ಎಂಬ ಆದೇಶ ಇದ್ದರೂ ಆದೇಶವನ್ನು ಉಲ್ಲಂಘನೆ ಮಾಡಿರುವ ಬಗ್ಗೆ.

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿದ್ದು, ಇಲಾಖಾ ವಿಚಾರಣೆಯಲ್ಲಿ ಹೊರಿಸಲಾದ ಆರೋಪವು ಭಾಗಶಃ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಚಿಕ್ಕಮಗಳೂರು ಜಿಲ್ಲೆ, ಇವರು ಮೇಲ್ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 29-03-07ರ ಆದೇಶದಲ್ಲಿ ಅರ್ಜಿದಾರರ ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ಪರಿಣಾಮ ಬೀರದಂತೆ 6ತಿಂಗಳ ಕಾಲ ಮುಂದೂಡಿ, ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಹಕ್ಕಿನಲ್ಲಿರುವ ರಜೆಯೆಂದು ಹಾಗೂ ದಿ:29-12-2005 ರಿಂದ 04-02-2006 ರವರೆಗೆ ಅನಧಿಕೃತವಾಗಿ ಗೈರುಹಾಜರಾದ ಅವಧಿಯನ್ನು ಅವರ ಹಕ್ಕಿನಲ್ಲಿರುವ ರಜೆಯೆಂದು ಪರಿಗಣಿಸಿ ಆದೇಶಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪಶ್ಚಿಮ ವಲಯ, ಮಂಗಳೂರು, ಇವರು ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಯಾವುದೇ ಅಂಶಗಳಿಲ್ಲವೆಂದು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 22-02-2008ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಯಾವುದೇ ಹೊಸ ಅಂಶಗಳು ಇರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 196 ಪೊಸಿಅ 2008 ಬೆಂಗಳೂರು, ದಿನಾಂಕ: 5ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ನಂಜುಂಡೇಗೌಡ, ಪೊಲೀಸ್ ಸಬ್-ಇನ್ಸ್‌ಪೆಕ್ಟರ್, ಬಸವನಹಳ್ಳಿ, ಚಿಕ್ಕಮಗಳೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.356 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎಂ.ಸಿ. ಈರೇಗೌಡ, ಎ.ಎಚ್.ಸಿ.400, ಸಿ.ಎ.ಆರ್. (ಕೇಂದ್ರ) ಬೆಂಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಉಪ ಪೊಲೀಸ್ ಆಯುಕ್ತರು, ಸಿ.ಎ.ಆರ್.(ಕೇಂದ್ರ) ಬೆಂಗಳೂರು, ಇವರ ಆದೇಶ ಸಂಖ್ಯೆ: ಶಿಕ್ಷೆ/25 ಡಿ.ಸಿ.ಪಿ., ಸಿ.ಎ.ಆರ್.ಕೇಂದ್ರ/2006 ದಿನಾಂಕ:20-04-06.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಅಪರ ಪೊಲೀಸ್ ಕಮೀಷನರ್, ಸಿ.ಎ.ಆರ್. ಬೆಂಗಳೂರು ನಗರ, ಇವರ ಆದೇಶ ಸಂಖ್ಯೆ:21/ಅಪೀಲು-2/2006 ದಿನಾಂಕ:22-05-2007.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:27-12-2007.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)118/2007-08, ದಿನಾಂಕ:14-08-2008.

ಪ್ರಸ್ತಾವನೆ:

ಶ್ರೀ ಎಂ.ಸಿ. ಈರೇಗೌಡ, ಎ.ಎಚ್.ಸಿ.400, ಸಿ.ಎ.ಆರ್.(ಕೇಂದ್ರ) ಬೆಂಗಳೂರು, ಇವರು ಕರ್ತವ್ಯಕ್ಕೆ ಅನಧಿಕೃತವಾಗಿ ಗೈರುಹಾಜರಾದ ಆರೋಪದ ಮೇಲೆ ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯುಮಾವಳಿ 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆ ಹೊರಿಸಲಾಗಿತ್ತು.

ದೋಷರೋಪಣೆ:

"ನೀವು ದಿ:07-04-2005 ರಿಂದ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಿಯಾಗಿದ್ದು, ಈ ಕಛೇರಿ ಆದೇಶ ಸಮಸಂಖ್ಯೆ ದಿ:05-05-2005ರಲ್ಲಿ ನಿಮ್ಮನ್ನು ಕರ್ತವ್ಯ ಪರಿತ್ಯಕ್ತನೆಂದು ಪರಿಗಣಿಸಲಾಗಿದ್ದು, ಸದರಿ ಆದೇಶವನ್ನು ನೀವು ದಿ:24-05-2005ರಂದು ಸ್ವೀಕರಿಸಿರುತ್ತೀರಿ. ನೀವು ದಿ:29-04-2005 ರಂದು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವುದಾಗಿ ದಿ:14-06-2005 ರಂದು ವರದಿ ಸಲ್ಲಿಸಿ ಜಂಟಿ ಆಯುಕ್ತರಾದ ಶ್ರೀ.ಜೈಕರ್ ಜರೋಮ್ ಐ.ಎ.ಎಸ್.ರವರ ಜೊತೆಯಲ್ಲಿ ಪ್ರವಾಸದಲ್ಲಿದ್ದುದಾಗಿ ತಿಳಿಸಿ, ಸದರಿ ಕರ್ತವ್ಯದಿಂದ ಬಿಡುಗಡೆಯಾದ ಬಗ್ಗೆ ಆಯುಕ್ತರು, ಶ್ರೀ.ಜೈಕರ್ ಜರೋಮ್, ಐ.ಎ.ಎಸ್. ರವರ ಪತ್ರ ದಿ:07-05-2005ನ್ನು ಹಾಜರು ಪಡೆಸಿರುತ್ತೀರಿ. ಆದರೆ ಸದರಿ ಆಯುಕ್ತರ ಜೊತೆ ಪ್ರವಾಸ ಕೈಗೊಂಡ ಬಗ್ಗೆ ಯಾವುದೇ ಮಾಹಿತಿ ನೀಡದೆ ಹಾಗೂ ಪ್ರವಾಸದ ಬಗ್ಗೆ ಯಾವುದೇ ದಾಖಲೆ ನೀಡದೆ ಸುಳ್ಳು ಮಾಹಿತಿ ನೀಡಿ ಕರ್ತವ್ಯಲೋಪ ಹಾಗೂ ದುರ್ನಡತೆಯನ್ನು ಪ್ರದರ್ಶಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಉಪ ಪೊಲೀಸ್ ಆಯುಕ್ತರು, ಸಿ.ಎ.ಆರ್. (ಕೇಂದ್ರ) ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 20-04-06ರ ಆದೇಶದಲ್ಲಿ "ಅರ್ಜಿದಾರರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ಒಂದು ವರ್ಷಕಾಲ ಮುಂದಿನ ವಾರ್ಷಿಕ ವೇತನ ಬಡ್ತಿಗೆ ಧಕ್ಕೆಯಾಗದಂತೆ ಮುಂದೂಡುವ ದಂಡನೆಯನ್ನು ವಿಧಿಸಿದ್ದಾರೆ ಹಾಗೂ ದಿ:07-04-05 ರಿಂದ 28-04-2005ರ ವರೆಗೆ ಗೈರುಹಾಜರಾದ ಅವಧಿಯನ್ನು ಕೆ.ಸಿ.ಎಸ್.ಆರ್. 106(ಎ)ರ ಪ್ರಕಾರ ಸಂಬಳರಹಿತ ರಜೆಯೆಂದು" ಪರಿಗಣಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಅಪರ ಪೊಲೀಸ್ ಕಮೀಷನರ್, ಸಿ.ಎ.ಆರ್. ಬೆಂಗಳೂರು ನಗರ, ಇವರು ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಯಾವುದೇ ಅಂಶಗಳಿಲ್ಲವೆಂದು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 22-05-2007ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿದಾರರು ಅನಧಿಕೃತವಾಗಿ ಗೈರು ಹಾಜರಾಗಿರುವುದು ದೃಢಪಟ್ಟಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಹೊಸ ಸಮರ್ಥನೀಯ ಅಂಶಗಳು ಇರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 277 ಪೊಸಿಅ 2008 ಬೆಂಗಳೂರು, ದಿನಾಂಕ: 5ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಂ.ಸಿ. ಈರೇಗೌಡ, ಎ.ಎಚ್.ಸಿ. 400, ಸಿ.ಎ.ಆರ್. (ಕೇಂದ್ರ) ಬೆಂಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 354 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ನರಸಿಂಹಮೂರ್ತಿ, ಎಚ್.ಸಿ.-125, ಡಿ.ಸಿ.ಆರ್.ಬಿ., ಜಿಲ್ಲಾ ಪೊಲೀಸ್ ಕಛೇರಿ, ತುಮಕೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ತುಮಕೂರು ಇವರ ಆದೇಶ ಸಂಖ್ಯೆ: ಪನ್ನಿ/26/2007-08 ಓ.ಬಿ.ಸಂ:537/07 ದಿನಾಂಕ:19-11-07.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರ ಆದೇಶ ಸಂಖ್ಯೆ:ಅಪೀಲು/ 49/2007-08 ಓ.ಬಿ:5/2007-08 ದಿನಾಂಕ:11-03-2008.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:13-05-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)28/2008-09, ದಿನಾಂಕ:09-07-2008.

ಪ್ರಸ್ತಾವನೆ:

ಶ್ರೀ ನರಸಿಂಹಮೂರ್ತಿ, ಎಚ್.ಸಿ.-125, ಡಿ.ಸಿ.ಆರ್.ಬಿ., ಜಿಲ್ಲಾ ಪೊಲೀಸ್ ಕಛೇರಿ, ತುಮಕೂರು, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಇಲಾಖಾ ವಿಚಾರಣೆ ನಡೆಸಲಾಗಿದೆ.

ದೋಷಾರೋಪಣೆ:

"ನಿಮಗೆ ದಿ:19-02-2007 ರಂದು ನಡೆಸಿದ ಡಿ.ಸಿ.ಆರ್.ಬಿ. ಶಾಖೆಯ ಸಮೀಕ್ಷಾ ಸಭೆಯಲ್ಲಿ ಈ ಹಿಂದೆ ನಡೆಸಿದ ಸಭೆಯಲ್ಲಿ ಶಾಖೆಯ ಕಡತಗಳನ್ನು ಮಂಡಿಸುವ ಬಗ್ಗೆ ವಿವರವಾಗಿ ತಿಳಿಸಿದ್ದರೂ ಸಹ ಡಿ.ಸಿ.ಆರ್.ಬಿ. ಶಾಖೆ, ಸಿ.ಆರ್.ಬಿ.(4) ಸಿ.ಸಿ.21/2007ರ ಕಡತದಲ್ಲಿ ಡಿ.ಎಸ್.ಪಿ. ತುಮಕೂರು ಗ್ರಾಮಾಂತರ ರವರು ಸಲ್ಲಿಸಿರುವ

ವರದಿಯನ್ನು ಯಥಾವತ್ತಾಗಿ ಸಹಿ ಪಡೆಯಲು ಕಡತವನ್ನು ಮಂಡಿಸಿ. ಅದರಲ್ಲಿ ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಹಾಗೂ ಕೇಂದ್ರ ವಲಯ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ರವರಿಗೆ ವರದಿ ಸಲ್ಲಿಸಲು ತಪ್ಪು ಮಾಹಿತಿಯನ್ನು ಸಲ್ಲಿಸಲು ಮಂಡಿಸಿ. ಕರ್ತವ್ಯದಲ್ಲಿ ಅತೀವ ನಿರ್ಲಕ್ಷ್ಯತೆ ಮತ್ತು ಬೇಜವಾಬ್ದಾರಿತನ ಎಸಗಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ತುಮಕೂರು, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 19-11-07ರ ಆದೇಶದಲ್ಲಿ ಅರ್ಜಿದಾರರ "ವಾರ್ಷಿಕ ವೇತನ ಬಡ್ತಿಯನ್ನು ತದನಂತರದ ವಾರ್ಷಿಕ ವೇತನ ಬಡ್ತಿಗಳಿಗೆ ಧಕ್ಕೆಯಾಗದಂತೆ ಮುಂದೂಡಿ. ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೆ ಪರಿಗಣಿಸುವ ದಂಡನೆಯನ್ನು" ವಿಧಿಸಿದ್ದಾರೆ.

ಈ ಆದೇಶದ ವಿರುದ್ದ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರು ಮೇಲ್ಮನವಿಯಲ್ಲಿ ಪರಿಗಣಿಸ ಬಹುದಾದಂತಹ ಯಾವುದೇ ಅಂಶಗಳಿಲ್ಲವೆಂದು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ: 11-03-2008ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿದಾರರು ಕರ್ತವ್ಯದಲ್ಲಿ ನಿರ್ಲಕ್ಷತೆ ಮತ್ತು ಬೇಜವಾಬ್ದಾರಿತನ ಎಸಗಿರುವುದು ಸಾಬೀತಾಗಿದೆ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 267 ಪೊಸಿಅ 2008 ಬೆಂಗಳೂರು, ದಿನಾಂಕ: 5ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ನರಸಿಂಹಮೂರ್ತಿ, ಎಚ್.ಸಿ.-125, ಡಿ.ಸಿ.ಆರ್.ಬಿ., ಜಿಲ್ಲಾ ಪೊಲೀಸ್ ಕಛೇರಿ, ತುಮಕೂರು, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.355 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎಂ.ಬಿ. ತಿಗಡೊಳ್ಳಿ, ನಿವೃತ್ತ ಎ.ಎಸ್.ಐ. ಸದಲಗಾ ಪೊಲೀಸ್ ಠಾಣೆ, ಬೆಳಗಾಂ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಬೆಳಗಾವಿ ಜಿಲ್ಲೆ, ಇವರ ಆದೇಶ ಸಂಖ್ಯೆ: ಸಿಬ್ಬಂದಿ-2/ಇವಿ/10/2007, ದಿನಾಂಕ:20-11-2007.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರ ಆದೇಶ ಸಂಖ್ಯೆ:ಅಪೀಲು 01/ಉವ/2008 ದಿನಾಂಕ:15-03-2008.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:29-05-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)33/2008-09, ದಿನಾಂಕ:28-08-2008.

ಪ್ರಸ್ತಾವನೆ:

ಶ್ರೀ ಎಂ.ಬಿ. ತಿಗಡೊಳ್ಳಿ, ಇವರು ಸದಲಗಾ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಕರ್ತವ್ಯಲೋಪ ಹಾಗೂ ದುರ್ನಡತೆ ಪ್ರದರ್ಶಿಸಿರುವ ಹಿನ್ನೆಲೆಯಲ್ಲಿ ಇವರ ವಿರುದ್ದ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರಡಿ ಇಲಾಖಾ ವಿಚಾರಣೆ ನಡೆಸಲಾಗಿದೆ.

ದೋಷಾರೋಪಣೆ:

"ಆಪಾದಿತ ಪೊಲೀಸ್ ಅಧಿಕಾರಿಯಾದ ಎಂ.ಬಿ.ತಿಗಡೊಳ್ಳಿ, ನೀವು ಸದಲಗಾ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತೀರಿ. ದಿ:14-10-2006 ಮತ್ತು 15-10-2006 ರಂದು ನಿಮಗೆ ಭೋಜ, ಬೆಡಕಿಹಾಳ,

ವಡಗೋಲ, ಮಲಿಕವಾಡ ಗ್ರಾಮಗಳ ಪೇಟ ಚಕ್ಕಿಂಗ್ ಕರ್ತವ್ಯಕ್ಕೆ ನೇಮಿಸಿದಾಗ ನೀವು ಅನಧಿಕೃತವಾಗಿ ದಿ:15-10-2006 ರಂದು ಮುಂಜಾನೆ 10.30 ಗಂಟೆಗೆ ಎಕ್ಸಂಬಾ ಗ್ರಾಮಕ್ಕೆ ಹೋಗಿ, ಎಕ್ಸಂಬಾ ಗ್ರಾಮದ ರಹವಾಸಿಯಾದ ಕುಮಾರಿ ಅಶ್ವಿನಿ ನಾನಾಸಾಹೇಬ ಖೋತ ಮತ್ತು ಅವರ ಅಜ್ಜಿ ಗಂಗೂಬಾಯಿ ವಿಶ್ವನಾಥ ಡೋಗರೆ ಇವರ ಮನೆಗೆ ಹೋಗಿ ಕುಮಾರಿ ಅಶ್ವಿನಿ ನಾನಾಸಾಹೇಬ ಖೋತ ಇವರ ಕೈ ಹಿಡಿದು ಎಳೆದಾಡಿ "ನಿನ್ನ ತಂದೆ ಎಲ್ಲಿದ್ದಾರೆ ಹೇಳು, ಇಲ್ಲದಿದ್ದರೆ ನಿಮ್ಮನ್ನು ಸುಮ್ಮನೆ ಬಿಡುವುದಿಲ್ಲ" ಅಂತಾ ಅಂಜಿಕೆ ಹಾಕಿದ್ದಲ್ಲದೇ, ಅವರ ಅಜ್ಜಿ ಗಂಗೂಬಾಯಿ ಇವರನ್ನು ನುಗಿಸ್ಯಾಡಿ ಅವರಿಬ್ಬರಿಗೂ ಅವಾಚ್ಯ ಶಬ್ದ ಗಳಿಂದ ಬೈಯ್ದು ಅವರೊಂದಿಗೆ ಅಸಭ್ಯವಾಗಿ ವರ್ತಿಸಿ, ನೀವು ನಿಮ್ಮ ಕರ್ತವ್ಯದಲ್ಲಿ ಘೋರ ದುರ್ನಡತೆಯನ್ನು ಹಾಗೂ ಕರ್ತವ್ಯಲೋಪವನ್ನು ಪ್ರದರ್ಶಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ದೃಢಪಟ್ಟಿರುವುದಿಲ್ಲವೆಂದು ಅಭಿಪ್ರಾಯ ನೀಡಿದ್ದಾರೆ. ಶಿಸ್ತು ಪ್ರಾಧಿಕಾರವು ವಿಚಾರಣಾಧಿಕಾರಿಗಳ ಅಭಿಪ್ರಾಯವನ್ನು ಒಪ್ಪದೆ ಅರ್ಜಿದಾರರಿಗೆ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಬೆಳಗಾವಿ, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 20-11-2007ರ ಆದೇಶದಲ್ಲಿ ಅರ್ಜಿದಾರರ ಮೂರು ಹಂತ ವಾರ್ಷಿಕ ವೇತನ ಬಡ್ತಿಗಳನ್ನು ಅವರ ಮುಂದಿನ ವೇತನ ಬಡ್ತಿಗಳ ಮೇಲೆ ಪರಿಣಾಮ ಬೀರುವಂತೆ ಇಳಿಸುವ ದಂಡನೆಯನ್ನು ವಿಧಿಸಿ ದಿ:11-03-2007 ರಿಂದ 25-09-2007ರ ವರೆಗಿನ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೇ ಪರಿಗಣಿಸಿ ಆದೇಶಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರು ಮೇಲ್ಮನವಿಯಲ್ಲಿ ಪರಿಗಣಿಸಿ ಅರ್ಜಿದಾರರು ಸೇವೆಯಿಂದ ವಯೋನಿವೃತ್ತಿ ಹೊಂದುತ್ತಿರುವುದರಿಂದ ಶಿಸ್ತುಪ್ರಾಧಿಕಾರದ ಆದೇಶವನ್ನು ಭಾಗಶ: ಮಾರ್ಪಡಿಸಿ, ಇವರ ಈಗಿನ ವೇತನದ ಒಂದು ಹಂತವನ್ನು ಕೆಳಗಿಳಿಸಿ, ಅಮಾನತ್ತಿನ ಅವಧಿ ದಿ:11-03-2007 ರಿಂದ 25-09-2007ರ ವರೆಗಿನ ಅವಧಿಯನ್ನು ಅವರ ಹಕ್ಕಿನಲ್ಲಿರುವ ರಜೆಯೆಂದು ಪರಿಗಣಿಸಿ, ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ: 15-03-2008 ರಂದು ಆದೇಶಿಸಿದ್ದಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಮೇಲ್ಮನವಿ ಪ್ರಾಧಿಕಾರವು ದಂಡನೆಯ ಪ್ರಮಾಣವನ್ನು ಕಡಿಮೆಗೊಳಿಸಿದ್ದಾರೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಸಮರ್ಥನೀಯ ಅಂಶಗಳು ಇರುವುದಿಲ್ಲ. ಪರಿಷ್ಕರಣ ಮೇಲ್ಮನವಿದಾರರು ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 316 ಪೊಸಿಅ 2008 ಬೆಂಗಳೂರು, ದಿನಾಂಕ: 26ನೇ ನವೆಂಬರ್ 2008

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಂ.ಬಿ. ತಿಗಡೊಳ್ಳಿ, (ನಿವೃತ್ತ) ಎ.ಎಸ್.ಐ. ಸದಲಗಾ ಪೊಲೀಸ್ ಠಾಣೆ, ಬೆಳಗಾಂ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.291 **ಟಿ.ಎನ್. ರವಿಪ್ರಕಾಶ್**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎ.ಬಿ. ಹಪ್ಪಳಿ, ಪೊಲೀಸ್ ಇನ್ಸ್‌ಪೆಕ್ಟರ್, ಸವದತ್ತಿ ಪೊಲೀಸ್ ಠಾಣೆ, ಬೆಳಗಾವಿ, ರವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:

1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರ ಆದೇಶ ಸಂಖ್ಯೆ: ಡಿಇ/47/ಉವ/99, ದಿನಾಂಕ:29-06-2001.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಆದೇಶ ಸಂಖ್ಯೆ:ಅಪೀಲು (6)23/2001-02 ದಿನಾಂಕ:11-01-2003.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:27-05-2006.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)36/2008-09, ದಿನಾಂಕ:07-10-2008.

ಪ್ರಸ್ತಾವನೆ:

ಶ್ರೀ ಎ.ಬಿ. ಹಪ್ಪಳಿ, ಪೊಲೀಸ್ ಇನ್ಸ್‌ಪೆಕ್ಟರ್, ಸವದತ್ತಿ ಸರ್ಕಲ್, ಬೆಳಗಾವಿ, ಇವರು ನಿಪ್ಪಾಣಿ ಗ್ರಾಮಂತರ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಸಬ್-ಇನ್ಸ್‌ಪೆಕ್ಟರ್, ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಇವರು ಮತ್ತು ಇತರರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯಲೋಪ ಮತ್ತು ಬೇಜವಾಬ್ದಾರಿತನ ಪ್ರದರ್ಶಿಸಿದ ಹಿನ್ನೆಲೆಯಲ್ಲಿ ಇತರ ಸಿಬ್ಬಂದಿಯೊಂದಿಗೆ ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರ ಜೊತೆಗೆ 8ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷರೋಪಣೆ:

"ದಿ:16-09-99 ರಂದು ಅರ್ಜಿದಾರರ ಅಸಪಾಕ ಹಜರತ್‌ಭಾಯಿ ಈತನು ನಿಮ್ಮ ಮುಂದೆ ಹಾಜರಾಗಿ ಲಿಖಿತ ಅರ್ಜಿ ನೀಡಿದ್ದು, ಅದರಲ್ಲಿ ಹಣದ ಕೊಡುತೊಗೊಳ್ಳುವ ವ್ಯವಹಾರ ಇದ್ದು ಸದರಿ ವಿಷಯ ದಿವಾಣಿ ಸ್ವರೂಪದ್ದು ಎಂದು ಗೊತ್ತಿದ್ದರೂ ಕೂಡಾ ಅದರಲ್ಲಿ ಪೊಲೀಸರು ಹಸ್ತಕ್ಷೇಪ ಮಾಡಬಾರದು ಎಂದು ತಿಳಿಸಿದ್ದರೂ ಸಹಿತ ಸದರಿ ಅರ್ಜಿಯನ್ನು ಯಾವುದೇ ದಾಖಲಾತಿಗೆ ತೆಗೆದು ಕೊಳ್ಳದೇ ನೀವು ಸದರಿ ಅರ್ಜಿಯ ವಿಚಾರಣೆಗಾಗಿ ಸಿ.ಪಿ.ಸಿ. ಬನಂ:2396, ಎಸ್.ಎ. ಸಾದಾಗಾರ್, ಇವರನ್ನು ಬೆಳಗಾಂವಕ್ಕೆ ಕಳುಹಿಸಿ ಮುನೀರ ಲಾಡಖಾನ್ ಇವರನ್ನು ಠಾಣೆಗೆ ಕರೆಯಿಸಿ ಉಳ್ಳಾಗಡ್ಡಿ ಖಾನಾಪೂರದಿಂದಾ ಅಸಪಾಕ ಹಜರತ್‌ಭಾಯಿ ಇವರ ಹಣದ ವ್ಯವಹಾರದ ಬಗ್ಗೆ ಮುನೀರನಿಗೆ ಒತ್ತಾಯದಿಂದ ರೂ:48,000-00 ಹಣಾ ಕೊಡಲಿಕ್ಕೆ ತಿಳಿಸಿ ಬರೆಯಿಸಿಕೊಂಡಿದ್ದು ಅಲ್ಲದೇ ಹಣ ಕೊಡುವವರೆಗೆ ಅರ್ಜಿದಾರಳಾದ ಶ್ರೀಮತಿ ನಾಸರಬಿ ಲಾಡಖಾನ ಇವರ ಮೈದುನ ನಾಶಾದ ಲಾಡಖಾನ್ ಈತನನ್ನು ಠಾಣೆಯಲ್ಲಿ ಕೂಡ್ರಿಸಿ ಹಣ ತರಲು ಸಿಪಿಸಿ 1812, ಎಸ್.ಆರ್.ಪಾಟೀಲ ಹಾಗೂ ಸಿ.ಪಿ.ಸಿ. ಬನಂ:2379 ಬಿ.ಎಸ್. ನಾಗನ್ನವರ ಇವರನ್ನು ಬೇಳಗಾಂವಿಯ ಅನಗೋಳಕ್ಕೆ ಕಳುಹಿಸಿ ಅವರಿಂದಾ ರೂ.48,000-00 ಹಣವನ್ನು ಅಸಪಾಕ ಹಜರತ್‌ಭಾಯಿ ಮತ್ತು ಅವನ ಅಣ್ಣ ಅಬ್ದುಲ್ ಹಜರತ್‌ಭಾಯಿ ಇವರಿಗೆ ಕೊಡಿಸ ಘೋರ ದುರ್ನಡತೆ ಪ್ರದರ್ಶಿಸಿರುವಿರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿ: 29-06-2001ರ ಆದೇಶದಲ್ಲಿ "ಅರ್ಜಿದಾರರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ಒಂದು ವರ್ಷ ಕಾಲ ಅವರ ಮುಂದಿನ ವಾರ್ಷಿಕ ವೇತನ ಬಡ್ತಿಗೆ ಧಕ್ಕೆಯಾಗುವಂತೆ ತಡೆಹಿಡಿಯುವ ದಂಡನೆಯನ್ನು" ವಿಧಿಸಿರುತ್ತಾರೆ.

ಈ ಆದೇಶದ ವಿರುದ್ದ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಮೇಲ್ಮನವಿಯನ್ನು ಭಾಗಶ: ಪುರಸ್ಕರಿಸಿ, ಇವರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ಒಂದು ವರ್ಷಕಾಲ ಮುಂದಿನ ವಾರ್ಷಿಕ ವೇತನ ಬಡ್ತಿಗೆ ಧಕ್ಕೆಯಾಗದಂತೆ ಮುಂದೂಡುವ ದಂಡನೆಯನ್ನು ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ:11-01-2003 ರಿಂದ ಆದೇಶಿಸಿದ್ದಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಯಾವುದೇ ಹೊಸ ಸಮರ್ಥನೀಯ ಅಂಶಗಳು ಇರುವುದಿಲ್ಲ. ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 388 ಪೊಸಿಅ 2008 ಬೆಂಗಳೂರು, ದಿನಾಂಕ: 16ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 25ರಡಿಯಲ್ಲಿಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ. ಎ.ಬಿ. ಹಪ್ಪಳಿ, ಪೊಲೀಸ್ ಇನ್ಸ್‌ಪೆಕ್ಟರ್, ಸವದತ್ತಿ ಸರ್ಕಲ್, ಬೆಳಗಾವಿ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.441

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎಸ್.ವೈ. ಮೋಹನ್, ಪಿ.ಎಸ್.ಐ., ಬಂಗಾರಪೇಟೆ, ಪೊಲೀಸ್ ಠಾಣೆ, ಕೆ.ಜಿ.ಎಫ್., ರವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1) ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರ ಆದೇಶ ಸಂಖ್ಯೆ: ಪಸ್ಸಿ/ಡಿಇ/5/2007-08, ಓ.ಬಿ:91/2007-09 ದಿನಾಂಕ:01-08-2007.
2) ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಆದೇಶ ಸಂಖ್ಯೆ: ಅಪೀಲು (6)70/2007-08 ಓ.ಬಿ.ಸಂ:7/ 2008-09 ದಿನಾಂಕ: 28-04-2008.
3) ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ:13-06-2008.
4) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)38/2008-09, ದಿನಾಂಕ:13-10-2008.

ಪ್ರಸ್ತಾವನೆ:

ಶ್ರೀ ಎಸ್.ವೈ. ಮೋಹನ್, ಪಿ.ಎಸ್.ಐ., ಬಂಗಾರಪೇಟೆ, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯಲೋಪವೆಸಗಿನ ಆರೋಪದ ಮೇಲೆ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಈ ಕೆಳಕಂಡ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷರೋಪಣೆ:

"ಶ್ರೀ ಎಸ್.ವೈ. ಮೋಹನ್, ಪಿ.ಎಸ್.ಐ., ಆದ ನೀವು ಬಂಗಾರಪೇಟೆ ಪೊಲೀಸ್ ಠಾಣೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದಲ್ಲಿ ದಿ:15-04-07 ರಿಂದ ಕರ್ತವ್ಯ ನಿರ್ವಹಿಸುತ್ತಿರುತ್ತೀರಿ. ಬಂಗಾರಪೇಟೆ ಠಾಣಾ ಸರಹದ್ದಿಗೆ ಸೇರಿದ ಕೀಲುಕೊಪ್ಪ ಗ್ರಾಮದಲ್ಲಿ ದಿ:23-04-07 ಮತ್ತು 24-04-07 ರಂದು ಶ್ರೀ.ಮಾರಿಯಮ್ಮ ದೇವಿ ಜಾತ್ರಾ ಮಹೋತ್ಸವದ ಕಾರ್ಯಕ್ರಮ ಏರ್ಪಾಡು ಮಾಡಿರುವುದು ಸರಿಯಷ್ಟೆ. ದಿ:24-04-07 ರಂದು ರಾತ್ರಿ ಯುವಕರು ಮತ್ತು ಯುವತಿಯರು ನೃತ್ಯ ಪ್ರದರ್ಶಿಸುತ್ತಿದ್ದು, ರಾತ್ರಿ ಸುಮಾರು 2.00 ಗಂಟೆ ಸಮಯದಲ್ಲಿ ನೃತ್ಯ ತಂಡದವರುಗಳು ಅಶ್ಲೀಲ ನೃತ್ಯ ಪ್ರದರ್ಶಿಸಿರುತ್ತಾರೆ. ಈ ದೃಶ್ಯವನ್ನು ದಿ:27-04-07 ರಂದು ಟಿ.ವಿ.-9 ಚಾನಲ್‌ನಲ್ಲಿ ಪ್ರದರ್ಶಿಸಲಾಗಿದೆ. ನೀವು ದಿ:24-04-2007 ರಂದು ರಾತ್ರಿ ಜಾತ್ರೆ ಬಂದೋಬಸ್ತ್‌ನಲ್ಲಿದ್ದು, ಅಶ್ಲೀಲ ಡ್ಯಾನ್ಸ್ ನಡೆಯುವ ಬಗ್ಗೆ ಗೊತ್ತಿದ್ದರೂ ಸಹ ಅಶ್ಲೀಲ ಡ್ಯಾನ್ಸ್ ನಡೆಯಲು ಆಸ್ಪದ ನೀಡಿರುತ್ತೀರಿ ಮತ್ತು ಕಾರ್ಯಕ್ರಮ ಆಯೋಜಿಸಿದ್ದವರ ಮೇಲೆ ತಕ್ಷಣ ಕ್ರಮ ತೆಗೆದುಕೊಳ್ಳದೆ ನೀವು ದಿ:27-04-2007ರ ವರೆಗೆ ಸುಮ್ಮನಿದ್ದು, ಎಲ್ಲಾ ಮಾಧ್ಯಮಗಳಲ್ಲಿ ಈ ಬಗ್ಗೆ ಪ್ರಚಾರಗೊಂಡ ನಂತರ ಎಸ್.ಬಿ.ಪೇದೆ 16 ನೀಡಿದ ಮಾಹಿತಿ ಮೇರೆಗೆ ಕೇಸು ದಾಖಲಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 01-08-2007ರ ಆದೇಶದಲ್ಲಿ ಅರ್ಜಿದಾರರ "ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ವಾರ್ಷಿಕ ವೇತನ ಬಡ್ತಿಗೆ ಧಕ್ಕೆಯಾಗದಂತೆ ಒಂದು ವರ್ಷಕಾಲ ಮುಂದೂಡುವ ಹಾಗೂ ದಿ:28-04-2007 ರಿಂದ 22-05-2007ರ ವರೆಗಿನ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೆ" ಪರಿಗಣಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರು ಮೇಲ್ಮನವಿಯಲ್ಲಿ ಪರಿಗಣಿಸ ಬಹುದಾದಂತಹ ಯಾವುದೇ ಅಂಶಗಳಿಲ್ಲವೆಂದು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ:28-04-2008ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸ ಬಹುದಾದಂತಹ ಯಾವುದೇ ಹೊಸ ಸಮರ್ಥನೀಯ ಅಂಶಗಳು ಇರುವುದಿಲ್ಲ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 197 ಪೊಸಿಅ 2008 ಬೆಂಗಳೂರು, ದಿನಾಂಕ: 13ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ. ಎಸ್.ವೈ. ಮೋಹನ್, ಪಿ.ಎಸ್.ಐ., ಬಂಗಾರಪೇಟೆ, ಕೆ.ಜಿ.ಎಫ್., ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ರವಿಪ್ರಕಾಶ

ಪಿ.ಆರ್.452

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ವಿಷಯ : ಶ್ರೀ ಸಚ್ಚಿದಾನಂದ, ಪಿ.ಎಸ್.ಐ. ಬಂಡಿಗನವಿಲೆ, ಮಂಡ್ಯ ಜಿಲ್ಲೆ ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1. ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಮಂಡ್ಯ ಜಿಲ್ಲೆ, ಇವರ ಆದೇಶ ಸಂಖ್ಯೆ: ಸಿಬ್ಬಂದಿ2/ಪಿಆರ್7:07-08, ಓ.ಬಿ.:104/07-08, ದಿನಾಂಕ 24-6-2007.
2. ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರ ಆದೇಶ ಸಂಖ್ಯೆ: ಅಪೀಲು/30/2007-08, ದಿನಾಂಕ 15-11-2007.
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ 10-1-2008.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)127/2007-08, ದಿನಾಂಕ 1-3-2008.

ಪ್ರಸ್ತಾವನೆ :

ಶ್ರೀ ಸಚ್ಚಿದಾನಂದ, ಪಿ.ಎಸ್.ಐ., ಮಂಡ್ಯ ಸಂಚಾರಿ ಪೊಲೀಸ್ ಠಾಣೆ, ಹಾಲಿ ಬಿಂಡಿಗನವಿಲೆ, ಪೊಲೀಸ್ ಠಾಣೆ, ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಅತೀವ ದುರ್ನಡತೆ ಎಸಗಿರುವ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:

"ನೀವು ಪಿ.ಎಸ್.ಐ. ಮಂಡ್ಯ ಸಂಚಾರಿ ಪೊಲೀಸ್ ಠಾಣೆ-2ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತೀರಿ. ಮರಳು ಸಾಗಾಣಿಕೆ ಮಾಡುತ್ತಿರುವ ವಾಹನಗಳಿಗೆ ನೀವು ಅನಾವಶ್ಯಕವಾಗಿ ತೊಂದರೆ ನೀಡುತ್ತು, ಅವರುಗಳಿಂದ ಬಲವಂತವಾಗಿ ಹಣ ವಸೂಲಿ ಮಾಡುತ್ತಿರುತ್ತೀರಿ ಎಂದು ಪೆಡರೇಷನ್ ಆಫ್ ಕರ್ನಾಟಕ ಸ್ಟೇಟ್ ಲಾರಿ ಓನರ್ಸ್ ಅಂಡ್ ಏಜೆಂಟ್ಸ್ ಅಸೋಸಿಯೇಷನ್, ಬೆಂಗಳೂರು, ರವರು ದಿನಾಂಕ 19-4-2007 ರಂದು ದೂರನ್ನು ನೀಡಿ ಆಪಾದಿಸಿರುತ್ತಾರೆ. ಹೀಗೆ ನೀವು ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಹಣದ ಆಮಿಷಕ್ಕೆ ಒಳಗಾಗಿ ಸಮಾಜಘಾತುಕ ಚಟುವಟಿಕೆಯಲ್ಲಿ ತೊಡಗುವುದರ ಮೂಲಕ ಕರ್ತವ್ಯದಲ್ಲಿ ಅತೀವ ದುರ್ನಡತೆ ಎಸಗಿರುತ್ತೀರಿ. ಆದ್ದರಿಂದ ಈ ಆರೋಪ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು, ಪರಿಶೀಲಿಸಿ ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಮಂಡ್ಯ ಜಿಲ್ಲೆ, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ 24-6-2007ರ ಆದೇಶದಲ್ಲಿ ಅರ್ಜಿದಾರರಿಗೆ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ಎರಡು ವರ್ಷಗಳ ಕಾಲ ನಂತರದ ವೇತನ ಬಡ್ತಿಗೆ ಪರಿಣಾಮ ಬೀರದಂತೆ ಮುಂದೂಡುವ ದಂಡನೆಯನ್ನು ವಿಧಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರು ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಯಾವುದೇ ಅಂಶಗಳಿಲ್ಲವೆಂದು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ 15-11-07ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಯಾವುದೇ ಸಮರ್ಥನೀಯ ಅಂಶಗಳು ಕಂಡುಬಾರದ ಕಾರಣ ಹಾಗೂ ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು

ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 90 ಪೊಸಿಅ 2008, ಬೆಂಗಳೂರು, ದಿನಾಂಕ: 12ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಸಚ್ಚಿದಾನಂದ, ಪಿ.ಎಸ್.ಐ., ಮಂಡ್ಯ ಸಂಚಾರಿ ಪೊಲೀಸ್ ಠಾಣೆ, ಹಾಲಿ ಬಿಂಡಿಗನವಿಲೆ, ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 453

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, (ಪೊಲೀಸ್ ಸೇವೆಗಳು)

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ: ಕನ್ನಡ ಲಿಪಿ ತಂತ್ರಾಂಶಗಳ ಶಿಷ್ಟತೆ ಮತ್ತು ಏಕರೂಪತೆ, ಏಕರೂಪಿ ಅಕ್ಷರ ಭಾಗಗಳು ಹಾಗು ತಂತ್ರಾಂಶಗಳಲ್ಲಿ ದ್ವಿಭಾಷ ಅಕ್ಷರ ರೂಪಗಳಿಗೆ ಬಳಸಬೇಕಾದ ಸಂಕೇತಗಳು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ ಮಾತಂಇ 6 ನೀಸಂವಿ 2000 ದಿನಾಂಕ 19-5-2000.
2. ಸರ್ಕಾರದ ಆದೇಶ ಸಂಖ್ಯೆ ಮಾತಂಇ 6 ನೀಸಂವಿ 2000 ದಿನಾಂಕ 1-11-2000.
3. ಸರ್ಕಾರದ ಆದೇಶ ಸಂಖ್ಯೆ ಮಾತಂಇ 6 ನೀಸಂವಿ 2000 ದಿನಾಂಕ 15-01-2001.
4. ನ್ಯಾಯಾಲಯದ ಆದೇಶ ಸಂಖ್ಯೆ ರಿಟ್ ಪಿಟಿಷನ್ ಸಂಖ್ಯೆ 26657/2004, ದಿನಾಂಕ: 23-7-2007.
5. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 67 ಇಆಇ 2004 ದಿನಾಂಕ 12-09-2007.
6. ಸಮಿತಿಯ ನಡವಳಿ ದಿನಾ:18-9-2007.
7. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 67 ಇಆಇ 2004, ದಿನಾಂಕ 18-10-2007.
8. ಸರ್ಕಾರದ ಆದೇಶ ಸಂಖ್ಯೆ: ಸಿ.ಆ.ಸು.ಇ 39 ಇಆಇ 2008 ದಿನಾಂಕ 25-04-2008.
9. ಸಮಿತಿಯ ನಡವಳಿ ದಿನಾಂಕ 09.07.2008.
10. ನ್ಯಾಯಾಲಯದ ಆದೇಶ ಸಂಖ್ಯೆ ರಿಟ್ ಪಿಟಿಷನ್ ಸಂಖ್ಯೆ 26657/2004 ದಿನಾಂಕ:1-7-2008.
11. ಶ್ರೀ ಪದ್ಮರಾವ್, ತಜ್ಞರು ರವರ ಪತ್ರ ದಿ:15-10-2008 ಮತ್ತು 21-10-2008.
12. ಸಮಿತಿಯ ನಡವಳಿ ದಿನಾಂಕ:11-12-2008.

ಪ್ರಸ್ತಾವನೆ:

ಮೇಲೆ 1 ರಲ್ಲಿ ಓದಲಾದ ದಿನಾಂಕ: 19-05-2000ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ವ್ಯಾಪಕವಾಗಿ ಕನ್ನಡ ತಂತ್ರಾಂಶಗಳನ್ನು ಅಭಿವೃದ್ಧಿಗೊಳಿಸಿ ರಾಜ್ಯದಲ್ಲಿ ದೈನಂದಿನ ಆಡಳಿತವನ್ನು ಗಣಕೀಕರಿಸಲು ಅನುಕೂಲವಾಗುವ ದಿಸೆಯಲ್ಲಿ ಕನ್ನಡ ತಂತ್ರಾಂಶಗಳ ತ್ವರಿತ ಅಭಿವೃದ್ಧಿ ಪಡಿಸುವಿಕೆ ಮತ್ತು ಅವುಗಳಲ್ಲಿ ಶಿಷ್ಟತೆ ಹಾಗೂ ಏಕರೂಪತೆ ತರಲು ಅಗತ್ಯವಾದ ಕ್ರಮಗಳನ್ನು ನಿರ್ಧರಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿಯವರ ನೇತೃತ್ವದಲ್ಲಿ ಒಂದು ಸಮಿತಿಯನ್ನು ರಚಿಸಲಾಗಿದೆ.

ಈ ಸಮಿತಿಯು ಕನ್ನಡ ಲಿಪಿ ತಂತ್ರಾಂಶಗಳ ಶಿಷ್ಟತೆ ಮತ್ತು ಏಕರೂಪತೆಗೆ ಸಂಬಂಧಿಸಿದಂತೆ ಸಲ್ಲಿಸಿದ್ದ ವರದಿಯಲ್ಲಿ ಸೂಚಿಸಿದ್ದಂತೆ ಕನ್ನಡ ಲಿಪಿಗೆ ಬೇಕಾದ ಶಿಷ್ಟತೆ ಮತ್ತು ಏಕರೂಪಿ ಅಕ್ಷರ ಭಾಗಗಳು (ಗ್ಲಿಪ್ಸ್) ಹಾಗೂ ತಂತ್ರಾಂಶದಲ್ಲಿ ಏಕಭಾಷಾ ಅಕ್ಷರ ರೂಪಗಳಿಗೆ ಬಳಸಬೇಕಾದ ಸಂಕೇತಗಳನ್ನು ನಿಗಧಿಪಡಿಸಿ ಅವುಗಳನ್ನು ಕನ್ನಡ ಲಿಪಿ ತಂತ್ರಾಂಶ ತಯಾರಕರು ಕಡ್ಡಾಯವಾಗಿ ಬಳಸಬೇಕೆಂದು ಮೇಲೆ (2) ರಲ್ಲಿ ಓದಲಾದ ದಿನಾಂಕ:01-11-2000ರ ಸರ್ಕಾರಿ ಆದೇಶದಲ್ಲಿ ತಿಳಿಸಲಾಗಿದೆ.

ಮೇಲೆ (3) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ದಿನಾಂಕ:1-11-2000ರ ಆದೇಶಕ್ಕೆ ಅನುಬಂಧಿಸಿದ ಅಕ್ಷರ ಭಾಗ (ಗ್ಲಿಪ್ಸ್) ಗಳು ಮತ್ತು ಅವುಗಳ ಸಂಕೇತಗಳಿಗೆ ಭಾಗಶ: ತಿದ್ದುಪಡಿ ಮಾಡಲಾಗಿದೆ. ಕರ್ನಾಟಕ ಸರ್ಕಾರವು ಸಿದ್ಧ ಪಡಿಸಿರುವ ನುಡಿ ಕನ್ನಡ ತಂತ್ರಾಂಶವು ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ನಿಗಧಿ ಪಡಿಸಿರುವ ಶಿಷ್ಟತೆ ಮತ್ತು ಏಕರೂಪತೆಯನ್ನು ಉಲ್ಲಂಘಿಸಿರುವುದಾಗಿ ಆಪಲ್ ಸಾಫ್ಟ್ ಕಂಪನಿಯ ಶ್ರೀ ಅನ್ಷರಸನ್ ರವರು ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ ಸಂಖ್ಯೆ 26657/2004 ದಾವೆ ಹೂಡಿದ್ದು, ಮೇಲೆ (4)ರಲ್ಲಿ ಓದಲಾದ ದಿನಾಂಕ:23-07-2007ರ ನ್ಯಾಯಾಲಯದ

ಆದೇಶವಲ್ಲಿ ನ್ಯಾಯಾಲಯವು ಮನಪಿದಾರರಿಗೆ ಅವರ ಕುಂದು ಕೊರತೆಗಳನ್ನು ಸರ್ಕಾರಕ್ಕೆ ದಿನಾಂಕ: 23–7–2007ರಿಂದ ಒಂದು ವಾರದೊಳಗೆ ಸಲ್ಲಿಸಬೇಕೆಂದು ಹಾಗೂ ಸರ್ಕಾರವು ಇದರ ಬಗ್ಗೆ ವಿಚಾರಣೆ ನಡೆಸಿ ಸೂಕ್ತ ನಿರ್ಣಯವನ್ನು ತೆಗೆದುಕೊಂಡು 2 ತಿಂಗಳೊಳಗೆ ನ್ಯಾಯಾಲಯಕ್ಕೆ ತಿಳಿಸಬೇಕೆಂದು ತೀರ್ಪು ನೀಡಿರುತ್ತದೆ.

ನ್ಯಾಯಾಲಯಕ್ಕೆ 22–9–2007ರೊಳಗೆ ಸರ್ಕಾರವು ತೆಗೆದುಕೊಂಡ ನಿಲುವಿನ ಬಗ್ಗೆ ತಿಳಿಸಬೇಕಾಗಿರುವುದರಿಂದ ಮೇಲೆ (5)ರಲ್ಲಿ ಓದಲಾದ ದಿನಾಂಕ:12–09–2007ರ ಸರ್ಕಾರಿ ಆದೇಶವಲ್ಲಿ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯು ಮೇಲೆ (6)ರಲ್ಲಿ ಓದಲಾದ ದಿನಾಂಕ:18–09–2007ರ ವರದಿಯಲ್ಲಿ ಕನ್ನಡ ಲಿಪಿ ತಂತ್ರಾಂಶ ತಯಾರಕರು ಅಭಿವೃದ್ಧಿ ಪಡಿಸಿದ ತಂತ್ರಾಂಶಗಳಲ್ಲಿ ದ್ವಿಭಾಷೆ ಅಕ್ಷರ ರೂಪಗಳಿಗೆ ಸಂಬಂಧಿಸಿದಂತೆ, ತಮ್ಮದೇ ಆದ ದ್ವಿಭಾಷೆ ಅಕ್ಷರ ಭಾಗಗಳು (ಗ್ಲಿಫ್ಸ್) ಹಾಗೂ ಸಂಕೇತಗಳ ತಂತ್ರಾಂಶಗಳನ್ನು ನೀಡಬಹುದಾಗಿದ್ದು, ಹೀಗೆ ನೀಡಿದ ತಂತ್ರಾಂಶದ ಜೊತೆಗೆ ಸದರಿ ದ್ವಿಭಾಷೆ ಅಕ್ಷರ ಭಾಗಗಳು (ಗ್ಲಿಫ್ಸ್) ಮತ್ತು ಸಂಕೇತದ ಮೂಲಕ ಸಿದ್ಧಪಡಿಸಿದ ಪಠ್ಯ, ದತ್ತಾಂಶಗಳನ್ನು ಏಕಭಾಷೆ ಅಕ್ಷರ ರೂಪಗಳಿಗೆ ಪರಿವರ್ತಿಸಬಹುದಾದ ಸಾಧನವನ್ನು ನೀಡಬೇಕು ಮತ್ತು ಹಾಗೆ ಪರಿವರ್ತಿಸಲ್ಪಟ್ಟ ಏಕಭಾಷೆ ಅಕ್ಷರ ರೂಪದ, ಅಕ್ಷರ ಭಾಗಗಳ (ಗ್ಲಿಫ್ಸ್) ಮತ್ತು ಸಂಕೇತವು ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿನ ಶಿಷ್ಟತೆಗಳಿಗನುಸಾರವಿರಬೇಕೆಂದು ಶಿಫಾರಸ್ಸು ಮಾಡಿರುತ್ತದೆ. ಅದರಂತೆ ಸದರಿ ಆದೇಶಕ್ಕೆ ಕ್ರಮ ಸಂಖ್ಯೆ:7 ಎಂದು ಸೇರಿಸಿ ಮೇಲೆ (7)ರಲ್ಲಿ ಓದಲಾದ ದಿನಾಂಕ: 18–10–2007ರ ಸರ್ಕಾರಿ ಆದೇಶದಲ್ಲಿ ಸೇರ್ಪಡೆ ಮಾಡಲಾಗಿದೆ.

ಮೊಕದ್ದಮೆ ಸಂಖ್ಯೆ ಸಂಖ್ಯೆ 26657/2004 ಕ್ಕೆ ಸಂಬಂಧಿಸಿದಂತೆ ನ್ಯಾಯಾಲಯವು ದಿ:24–3–2008ರಂದು, ಕನ್ನಡ ಲಿಪಿಗೆ ಬೇಕಾದ ಶಿಷ್ಠತೆ ಮತ್ತು ದ್ವಿಭಾಷೆ ಅಕ್ಷರ ರೂಪಗಳಿಗೆ ಬಳಸಬೇಕಾದ ಸಂಕೇತವನ್ನು ನಿಗಧಿಪಡಿಸಲು ಸಾಧ್ಯವೇ ಹಾಗೆ ಸಾಧ್ಯವಿದ್ದಲ್ಲಿ ಎಷ್ಟು ದಿನಗಳಲ್ಲಿ ಆದೇಶ ಹೊರಡಿಸಲಾಗುವುದು ಎಂಬ ಬಗ್ಗೆ ಮಾಹಿತಿ ನೀಡುವಂತೆ ಸೂಚಿಸಿದ್ದರ ಮೇರೆಗೆ ನ್ಯಾಯಾಲಯಕ್ಕೆ ಸರ್ಕಾರದ ನಿಲುವನ್ನು ತಿಳಿಸಲು ಮೇಲೆ ಓದಲಾದ (8)ರ ದಿನಾಂಕ:25–04–2008ರ ಸರ್ಕಾರಿ ಆದೇಶದಲ್ಲಿ ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಹಾಗೂ ಪ್ರವಾಸೋದ್ಯಮ ಇಲಾಖೆ ರವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಲಾಗಿದೆ.

ಮೇಲೆ (9)ರಲ್ಲಿ ಓದಲಾದ ದಿನಾಂಕ 09.02.2008ರ ನಡುವಳಿಯಲ್ಲಿ ಕನ್ನಡ ದ್ವಿಭಾಷಾ ಅಕ್ಷರಗಳ ಬಗ್ಗೆ ಪ್ರಕಟಿಸಿರುವ ಕರಡು ಶಿಷ್ಠತೆ ಬಗ್ಗೆ ಯಾವುದೇ ಆಕ್ಷೇಪ ಇಲ್ಲದಿರುವುದನ್ನು ಸಭೆಯು ಗಮನಿಸಿ ಅಂತಿಮ ದ್ವಿಭಾಷಾ ಶಿಷ್ಠತೆಯೆಂದು ಪರಿಗಣಿಸಲು ತೀರ್ಮಾನಿಸಲಾಯಿತು.

ಕನ್ನಡ ಲಿಪಿಗೆ ಬೇಕಾದ ಶಿಷ್ಠತೆ ಮತ್ತು ದ್ವಿಭಾಷೆ ಅಕ್ಷರ ರೂಪಗಳಿಗೆ ಬಳಸಬೇಕಾದ ಸಂಕೇತಗಳನ್ನು ಅಂತಿಮಗೊಳಿಸುವ ಮುನ್ನ ಮೊಕದ್ದಮೆ ಸಂಖ್ಯೆ ಸಂಖ್ಯೆ 26657/2004ರ ಫಿರ್ಯಾದುದಾರರಿಗೆ ಸಮಿತಿಯ ಮುಂದೆ ಹಾಜರಾಗಲು ಅವಕಾಶ ನೀಡುವಂತೆ ಮೇಲೆ (10)ರಲ್ಲಿ ಓದಲಾದ ದಿನಾಂಕ 01.07.2008ರ ನ್ಯಾಯಾಲಯದ ಆದೇಶದಲ್ಲಿ ತೀರ್ಪು ನೀಡಲಾಗಿತ್ತು. ಅದರಂತೆ ಫಿರ್ಯಾದುದಾರರು ದಿ:8–9–2008ರಂದು ಸಮಿತಿಯ ಮುಂದೆ ಹಾಜರಾಗಿ ಅವರ ಸಲಹೆಯನ್ನು ಲಿಖಿತ ರೂಪದಲ್ಲಿ ಸಮಿತಿಗೆ ಸಲ್ಲಿಸಿದ್ದು, ಅವರ ಸಲಹೆಯನ್ನು ಪರಿಶೀಲಿಸಿದ ತಜ್ಞರು ಶ್ರೀ ಅನ್‌ಬರಸನ್ ರವರು ಸೂಚಿಸಿರುವ ಕೆಲವು ಅಕ್ಷರಗಳು ಈಗಿನ ಕನ್ನಡ ಬಳಕೆಯಲ್ಲಿ ಹೆಚ್ಚಾಗಿರುವುದಿಲ್ಲವೆಂದು, ಆದುದರಿಂದ ಪ್ರಕಟಿಸಿರುವ ದ್ವಿಭಾಷೆ ಅಕ್ಷರ ರೂಪಗಳಿಗೆ ನಿಗಧಿ ಪಡಿಸಿರುವ ಸಂಕೇತಗಳನ್ನು ಅಂತಿಮವೆಂದು ತೀರ್ಮಾನಿಸಬಹುದೆಂದು ಮೇಲೆ (11)ರಲ್ಲಿ ಓದಲಾದ ದಿನಾಂಕ 21.10.2008ರ ಪತ್ರದಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿರುತ್ತಾರೆ. ಇದನ್ನು ಆಧರಿಸಿ ಮೇಲೆ (12) ರಲ್ಲಿ ಓದಲಾದ ದಿನಾಂಕ 11.12.2008ರಂದು ಸರ್ಕಾರದ ಕಾರ್ಯದರ್ಶಿಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧ್ಯಕ್ಷತೆಯಲ್ಲಿ ನಡೆದ ತಜ್ಞರ ಸಮಿತಿಯ ಸಭೆಯಲ್ಲಿ ಶ್ರೀ ಅನ್‌ಬರಸನ್ ರವರು ಸಲ್ಲಿಸಿರುವ ಸಂಕೇತಗಳ ಸಲಹೆಗಳು ಸರ್ಕಾರದ ದಿನನಿತ್ಯದ ಕೆಲಸದಲ್ಲಿ ಬಳಸದೆ ಇರುವ ಕಾರಣ ಇವರು ಸೂಚಿಸಿರುವ ಸಂಕೇತಗಳನ್ನು ಅಥವಾ ಅಭಿಪ್ರಾಯಗಳನ್ನು ಕೈಬಿಡಬಹುದೆಂದು ತೀರ್ಮಾನಿಸಿ ಮೇಲೆ (9)ರಲ್ಲಿ ಓದಲಾದ ಸಮಿತಿಯ ನಡುವಳಿಯಲ್ಲಿ ನಿರ್ಣಯಿಸಿದಂತೆ ಕನ್ನಡ ತಂತ್ರಾಂಶ ದ್ವಿಭಾಷಾ ಸಂಕೇತಗಳನ್ನು ಅನುಮೋದಿಸಲು ತೀರ್ಮಾನಿಸಿ ಸೂಕ್ತ ಆದೇಶವನ್ನು ಹೊರಡಿಸಲು ಒಪ್ಪಲಾಯಿತು.

ಇದನ್ನು ಪರಿಶೀಲಿಸಿದ ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 11 ಕೆಓಎಲ್ 2008, ಬೆಂಗಳೂರು, ದಿ: 7ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕನ್ನಡ ತಂತ್ರಾಂಶಗಳಲ್ಲಿ ದ್ವಿಭಾಷ ಅಕ್ಷರ ರೂಪಗಳಿಗೆ ಬಳಸಬೇಕಾದ ಅಕ್ಷರ ಭಾಗಗಳು ಮತ್ತು ಸಂಕೇತಗಳ ಬಗ್ಗೆ ಈ ಕೆಳಗಿನಂತೆ ಆದೇಶಿಸಿದೆ.

1) ಯಾವುದೇ ಇಲಾಖೆಗೆ ದ್ವಿಭಾಷೆ (ಕನ್ನಡ ಮತ್ತು ಇಂಗ್ಲೀಷ್) ಅಕ್ಷರ ರೂಪಗಳುಳ್ಳ ಕನ್ನಡ ತಂತ್ರಾಂಶದ ಅಗತ್ಯವಿದ್ದಲ್ಲಿ, ತಂತ್ರಾಂಶ ತಯಾರಕರು ಈ ಆದೇಶಕ್ಕೆ ಲಗತ್ತಿಸಿರುವ ಶಿಷ್ಟತೆಯನ್ನು ಸಂಪೂರ್ಣವಾಗಿ ಅನುಸರಿಸಿರುವ ತಂತ್ರಾಂಶವನ್ನು ಒದಗಿಸಬೇಕು.

2) ದ್ವಿಭಾಷ ಕನ್ನಡ ತಂತ್ರಾಂಶದ ಜೊತೆಗೆ, ದ್ವಿಭಾಷ ಅಕ್ಷರ ಭಾಗಗಳು (ಗ್ಲಿಫ್) ಮತ್ತು ಸಂಕೇತದ ಮೂಲಕ ಸಿದ್ಧಪಡಿಸಿದ ಪಠ್ಯ, ದತ್ತಾಂಶಗಳನ್ನು ಏಕಭಾಷ ಅಕ್ಷರ ರೂಪಗಳಿಗೆ ಪರಿವರ್ತಿಸಬಹುದಾದ ಸಾಧನವನ್ನು ನೀಡಬೇಕು ಹಾಗೂ ಹಾಗೆ ಪರಿವರ್ತಿಸಲ್ಪಟ್ಟ ಏಕಭಾಷ ಅಕ್ಷರ ರೂಪದ, ಅಕ್ಷರ ಭಾಗಗಳ(ಗ್ಲಿಫ್) ಮತ್ತು ಸಂಕೇತವು ಸರ್ಕಾರವು ದಿನಾಂಕ 19.05.2000ರ ಆದೇಶದಲ್ಲಿನ ಶಿಷ್ಟತೆಗೆ ಅನುಗುಣವಾಗಿರಬೇಕು.

3) ಈ ಹಿಂದೆ ದ್ವಿಭಾಷಾ ಅಕ್ಷರ ರೂಪಗಳುಳ್ಳ ತಂತ್ರಾಂಶ ಕುರಿತು ಹೊರಡಿಸಿರುವ ಅಧಿಸೂಚನೆ/ಗಳು ಈ ಅಧಿಸೂಚನೆ ಜಾರಿಗೆ ಬಂದ ತಕ್ಷಣದಿಂದ ರದ್ದಾಗುತ್ತದೆ/ವೆ.

4) ಕನ್ನಡ ಲಿಪಿ ತಂತ್ರಾಂಶದ ತಯಾರಕರು, ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದಲ್ಲಿರುವ ಶಿಷ್ಟ ಮತ್ತು ಏಕ ರೂಪ ಕನ್ನಡ ಅಕ್ಷರಭಾಗಗಳು ಮತ್ತು American Standard Code for Information Interchange (ASCII) ಸಂಕೇತಗಳನ್ನೇ ಬಳಸತಕ್ಕದ್ದು.

5) ಈ ಮೇಲೆ ಹೇಳಲಾದ ಎಲ್ಲಾ ನಿಬಂಧನೆಗಳನುಸಾರ ಸಿದ್ಧಪಡಿಸಲಾದ ಕನ್ನಡ ತಂತ್ರಾಂಶಗಳನ್ನು ಮಾತ್ರ ಸರ್ಕಾರದ ಮಾನ್ಯತೆ ಪಡೆದ ಅಧಿಕೃತ ತಂತ್ರಾಂಶಗಳ/ತಂತ್ರಾಂಶ ತಯಾರಕರ/ತಂತ್ರಾಂಶ ಮಾರಾಟಗಾರರ ಪಟ್ಟಿಯಲ್ಲಿರಬೇಕು.

6) ಕರ್ನಾಟಕ ಸರ್ಕಾರದ ಎಲ್ಲಾ ಇಲಾಖೆಗಳು, ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಸೇರಿದ ನಿಗಮಗಳು, ಮಂಡಳಿಗಳು, ಪ್ರಾಧಿಕಾರಗಳು, ವಿಶ್ವವಿದ್ಯಾನಿಲಯಗಳು, ವಿದ್ಯಾಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳು, ಅನುದಾನಿತ ಸಂಸ್ಥೆಗಳು ಈ ನಿಬಂಧನೆಗಳಿಗೆ ಒಳಪಟ್ಟು ಪ್ರಮಾಣೀಕೃತವಾದ ಕನ್ನಡ ಲಿಪಿ ತಂತ್ರಾಂಶಗಳನ್ನು ಮಾತ್ರ ಬಳಸಬೇಕು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಎಂ.ಕೆ. ಧರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

Standards for Kannada in Computers prescribed by the Government of Karnataka
Glyphs and Glyph codes (ASCII)
(ASCII - American Standard Code for Information Interchange
ಮಾಹಿತಿ ವಿನಿಮಯಕ್ಕೆ ಅಮೆರಿಕದ ಶಿಷ್ಟ ಸಂಕೇತಗಳು

ASCII codes	Standard Glyphs proposed by the Government for Kannada (Bilingual)
32	Space
33	!
34	"
35	#
36	$
37	%
38	&
39	'
40	(
41	)
42	*
43	+
44	,

ASCII codes	Standard Glyphs proposed by the Government for Kannada (Bilingual)
45	-
46	.
47	/
48	0
49	1
50	2
51	3
52	4
53	5
54	6
55	7
56	8
57	9
58	:
59	;
60	<
61	=
62	>
63	?
64	@
65	A
66	B
67	C
68	D
69	E
70	F
71	G
72	H
73	I
74	J
75	K
76	L
77	M
78	N
79	O
80	P
81	Q
82	R
83	S
84	T
85	U
86	V
87	W
88	X

ASCII codes	Standard Glyphs proposed by the Government for Kannada (Bilingual)
89	Y
90	Z
91	[
92	\
93	]
94	^
95	_
96	`
97	a
98	b
99	c
100	d
101	e
102	f
103	g
104	h
105	i
106	j
107	k
108	l
109	m
110	n
111	o
112	p
113	q
114	r
115	s
116	t
117	u
118	v
119	w
120	x
121	y
122	z
123	{
124		
125	}
126	~
127	Not used
128	
129	ಂ
130	ಃ
131	ಙ
132	ಞ

ASCII codes	Standard Glyphs proposed by the Government for Kannada (Bilingual)
133	ಇ
134	ಈ
135	ಉ
136	ಊ
137	ಋ
138	ಎ
139	ಏ
140	ಐ
141	ಒ
142	ಓ
143	Not used
144	ಔ
145	ಕ
146	ಕಿ
147	ಖ
148	ಖ
149	ಖಿ
150	ಗ
151	ಗಿ
152	ಘ
153	ಘಿ
154	ಙ
155	ಚ
156	ಚಿ
157	ಛ
158	
159	ಛಿ
160	
161	ಜ
162	ಜ
163	ಜಿ
164	ರ
165	[illegible]
166	ು
167	ರಿ
168	ಞ
169	ಟ
170	ಟ
171	ಟಿ
172	ಠ
173	ಠಿ
174	ಡ
175	ಡಿ
176	.

ASCII codes	Standard Glyphs proposed by the Government for Kannada (Bilingual)
177	ಣ
178	ಣಿ
179	ತ
180	ತಿ
181	ಥ
182	ಥಿ
183	ದ
184	ದಿ
185	ನ
186	ನಿ
187	ಪ
188	ಪಿ
189	ಬ
190	ಬ
191	ಬಿ
192	ವ
193	ವಿ
194	ಯಿ
195	ಲ
196	ಲ
197	ಲಿ
198	ಶ
199	ಶಿ
200	ಷ
201	ಷಿ
202	ಸ
203	ಸಿ
204	ಹ
205	ಹಿ
206	ಳ
207	ಳಿ
208	ು
209	ೌ
210	ೃ
211	ೆ
212	ು
213	ೂ
214	ೊ
215	ೋ
216	[illegible]
217	[illegible]
218	[illegible]
219	[illegible]
220	[illegible]

ASCII codes	Standard Glyphs proposed by the Government for Kannada (Bilingual)
221	ಏ
222	೧
223	ಘ್
224	ಜ
225	ಛ
226	ಜ
227	ಝ
228	ಞ
229	ಟ
230	ಠ
231	ಡ
232	ಢ
233	ಣ
234	ತ
235	ಥ
236	ದ
237	ಧ
238	ನ
239	ಬ
240	ಫ
241	ಬ
242	ಭ
243	ೞ
244	ಶ
245	‿
246	ಌ
247	ವ
248	ತಿ
249	ಮ
250	~
251	ಲ
252	ಳ
253	ೄ
254	೯
255	small white space

Note: For Kannada numerals a separate font can be provided which replace English numerals with ASCII codes 48 to 57.

ಎಂ.ಕೆ. ಭರ್ಮರಾಜಪ್ಪ

ಪಿ.ಆರ್.785

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಪ್ರಾದೇಶಿಕ ಪತ್ರಾಗಾರ ಕಛೇರಿ, ಧಾರವಾಡ ಇಲ್ಲಿಗೆ ಒಂದು ಮೋದಿ ಜೆರಾಕ್ಸ್ ಯಂತ್ರ (WC 5638)ನು ಬೈಬ್ಯಾಕ್ ಆಧಾರದಲ್ಲಿ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಅವರ ಪತ್ರ ಸಂಖ್ಯೆ: ಎಆರ್ಎಸ್ 25 ಎಡಿಎಂ 2008, ದಿನಾಂಕ 06-10-2008.

ಪ್ರಸ್ತಾವನೆ:

ಮೇಲೆ ಓದಲಾದ ದಿ: 06-10-08ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ರಾಜ್ಯ ಪತ್ರಗಾರ ಇಲಾಖೆ ಅವರು ಧಾರವಾಡ ವಿಭಾಗೀಯ ಪತ್ರಗಾರ ಕಛೇರಿಯಲ್ಲಿರುವ ಜೆರಾಕ್ಸ್ ಯಂತ್ರವು ಪದೇಪದೇ ಕೆಟ್ಟು ಹೋಗುತ್ತಿರುವುದರಿಂದ, ಇದರಿಂದ ತೆಗದ ದಾಖಲೆಯ ಪ್ರತಿಗಳು ಸರಿಯಾಗಿ ಬರುತ್ತಿಲ್ಲವಾದುದರಿಂದ ಒಂದು ಹೊಸ ಮೋದಿ ಜೆರಾಕ್ಸ್ ಯಂತ್ರ (ಮಾದರಿ WC 5638)ವನ್ನು ಬೈಬ್ಯಾಕ್ ಆಧಾರದಲ್ಲಿ ಮೆ: ಅಕುರ ಸಲ್ಯೂಷನ್ಸ್, ಬೆಂಗಳೂರು ಇವರಿಂದ DGS&D ನಿಂದ ಅಂಗೀಕೃತ ದರಪಟ್ಟಿಯನ್ವಯ ಅಂದಾಜು ರೂ.2,59,230.00 ಗಳನ್ನು (ಎಲ್ಲಾ ತೆರಿಗೆಗಳು ಸೇರಿ) ವೆಚ್ಚದಲ್ಲಿ ಖರೀದಿಸಲು ಸರ್ಕಾರದ ಅನುಮತಿ ಕೋರಿರುತ್ತಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 13 ರಾಪಸಿ 2008, ಬೆಂಗಳೂರು, ದಿನಾಂಕ: 3ನೇ ಜನವರಿ 2009

ವಿಭಾಗೀಯ ಪತ್ರಗಾರ ಕಛೇರಿ, ಧಾರವಾಡ ಇಲ್ಲಿ ಕೆಟ್ಟುಹೋಗಿರುವ ಜೆರ್ಯಾಕ್ಸ್ ಯಂತ್ರ ಬದಲಾಗಿ DGS&Dನಿಂದ ಅಂಗೀಕೃತ ದರಪಟ್ಟಿಯನ್ವಯ ರೂ.2,59,230.00 (ಎಲ್ಲಾ ತೆರಿಗೆಗಳು ಸೇರಿ) (ರೂಪಾಯಿ ಎರಡು ಲಕ್ಷದ ಐವತ್ತೊಂಬತ್ತು ಸಾವಿರದ ಇನ್ನೂರ ಮೂವತ್ತುಗಳು ಮಾತ್ರ) ಗಳ ವೆಚ್ಚದಲ್ಲಿ ಬೈಬ್ಯಾಕ್ ಆಧಾರದಲ್ಲಿ ಮೆ: ಅಕುರ ಸಲ್ಯೂಷನ್ಸ್, ಬೆಂಗಳೂರು ಇವರಿಂದ ಹೊಸ ಜೆರಾಕ್ಸ್ ಯಂತ್ರವನ್ನು (WC 5638 ಮಾದರಿ) ಖರೀದಿಸಲು ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆ ಇವರಿಗೆ ಪಾರದರ್ಶಕತೆ ಅಧಿನಿಯಮ 1999 ಹಾಗೂ ಅದರ ನಿಯಮಗಳು 2000ನ್ನು ಅನುಸರಿಸುವ ಷರತ್ತಿಗೆ ಒಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

ಈ ವೆಚ್ಚವನ್ನು ರಾಜ್ಯ ಪತ್ರಗಾರ ಇಲಾಖೆಯ 2008-09ನೇ ಸಾಲಿನ ಲೆಕ್ಕಶೀರ್ಷಿಕೆ 2205-104-01-051 (ಸಾಮಾನ್ಯ ವೆಚ್ಚಗಳು) (ಯೋಜನೇತರ) ಅಡಿ ಭರಿಸತಕ್ಕದ್ದು. ಈ ಆದೇಶವನ್ನು ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ಟಿಪ್ಪಣಿ ಸಂಖ್ಯೆ: ಇಡಿ 1501 ಐಎಫ್(ಬಿಎ) 2008 ದಿ: 02-12-2008ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.295

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಶ್ರೀ ಕೆ. ಕೃಷ್ಣಾಚಾರ್, ಸಹಾಯಕ ಪತ್ರಪಾಲಕರು ರವರಿಗೆ ನೀಡಿದ ಪತ್ರಪಾಲಕರ ಹುದ್ದೆಯ ಮುಂಬಡ್ತಿಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ:
1. ಅಧಿಸೂಚನೆ ಸಂಖ್ಯೆ ಕಸಂವಾಪ್ರ 1 ರಾಪಸಿ 2008 ದಿ: 12.08.2008.
2. ಶ್ರೀ ಕೆ. ಕೃಷ್ಣಾಚಾರ್, ಸಹಾಯಕ ಪತ್ರಪಾಲಕರು, ಇವರ ಮನವಿ ದಿ: 16-8-2008.
3. ನಿರ್ದೇಶಕರು, ರಾಜ್ಯ ಪತ್ರಗಾರ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ ಎ.ಆರ್.ಎಸ್ 16 ಇಎಸ್.ಟಿ 95(ಭಾಗ) ದಿನಾಂಕ 19-08-08.

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ ಶ್ರೀ ಕೆ. ಕೃಷ್ಣಾಚಾರ್, ಸಹಾಯಕ ಪತ್ರಪಾಲಕರು, ಇವರಿಗೆ ವೇತನ ಶ್ರೇಣಿ ರೂ.14,050-25,020ರ ಗ್ರೂಪ್ 'ಎ' ವೃಂದದ ಪತ್ರಪಾಲಕರ ಹುದ್ದೆಗೆ ಮುಂಬಡ್ತಿಯನ್ನು ನೀಡಿ ವಿಭಾಗೀಯ ಕಛೇರಿ ಧಾರವಾಡ ಇಲ್ಲಿ ಖಾಲಿ ಇರುವ ಪತ್ರಪಾಲಕರ ಹುದ್ದೆಗೆ ನೇಮಿಸಲಾಗಿತ್ತು.

ಶ್ರೀ ಕೆ. ಕೃಷ್ಣಾಚಾರ್ ರವರು ಮೇಲೆ ಓದಲಾದ (2)ರ ತಮ್ಮ ಮನವಿ ದಿ: 16-8-08 ರಲ್ಲಿ ತಮಗೆ 57 ವರ್ಷಗಳಾಗಿದ್ದು, ಕೆಲವು ವರ್ಷಗಳಿಂದ ಅತಿಯಾದ ರಕ್ತದೊತ್ತಡ/ಹೃದಯಬೇನೆಯಿಂದ ನರಳುತ್ತಿದ್ದು, ಬೆಂಗಳೂರಿನಲ್ಲಿರುವ ನರ್ಸಿಂಗ್ ಹೋಂ ಗಳಲ್ಲಿ ಆಗಾಗ ಚಿಕಿತ್ಸೆ ಪಡೆಯುತ್ತಿದ್ದೇನೆಂದು ಇದರ ಜೊತೆಗೆ ಕೆಲವು ಕೌಟುಂಬಿಕ ಸಮಸ್ಯೆಗಳನ್ನೂ ಸಹ ಎದುರಿಸುತ್ತಿದ್ದೇನೆಂದು, ಈ ಪರಿಸ್ಥಿತಿಯಲ್ಲಿ ನಾನು ಮುಂಬಡ್ತಿ ಹೊಂದಿ ಸ್ಥಳ ನಿಯುಕ್ತಿಗೊಂಡಿರುವ ಧಾರವಾಡ, ವಿಭಾಗೀಯ ಕಛೇರಿಯಲ್ಲಿ ಗ್ರೂಪ್-ಎ ವೃಂದದ ಪತ್ರಪಾಲಕರ ಹುದ್ದೆಯಲ್ಲಿ ಹಾಜರಾಗಿ ಸೇವೆ ಸಲ್ಲಿಸುವುದು ಸಧ್ಯಕ್ಕೆ ಕಷ್ಟಸಾಧ್ಯವಾಗಿರುತ್ತದೆಂದು ತಿಳಿಸಿ ನೀಡಿರುವ ಮುಂಬಡ್ತಿಯನ್ನು ಒಪ್ಪಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಅದನ್ನು ನಿರಾಕರಿಸಲು ಇಚ್ಚಿಸಿರುತ್ತಾರೆ. ಮುಂಬಡ್ತಿ ನಿರಾಕರಣೆಯನ್ನು ಒಪ್ಪಿಕೊಂಡು ಹಾಲಿ ಬೆಂಗಳೂರು ಕೇಂದ್ರ ಕಛೇರಿಯಲ್ಲಿರುವ ಸಹಾಯಕ ಪತ್ರಪಾಲಕರ ಹುದ್ದೆಯಲ್ಲಿ ಮುಂದುವರಿಸಲು ಕೋರಿರುತ್ತಾರೆ. ಮೇಲೆ ಓದಲಾದ (3)ರ ಪತ್ರದಲ್ಲಿ ನಿರ್ದೇಶಕರು, ಅವರ ಮನವಿಯನ್ನು ಲಗತ್ತಿಸಿ, ಸರ್ಕಾರದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಕೋರಿರುತ್ತಾರೆ.

ಈ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 23 ರಾಪಸಿ 2008, ಬೆಂಗಳೂರು, ದಿನಾಂಕ 18ನೇ ಡಿಸೆಂಬರ್ 2008

ಮೇಲಿನ ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳ ಹಿನ್ನಲೆಯಲ್ಲಿ ಶ್ರೀ ಕೆ. ಕೃಷ್ಣಾಚಾರ್ ಸಹಾಯಕ ಪತ್ರಪಾಲಕರು ಇವರಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ ಕಸಂವಾಪ್ರ 1 ರಾಪಸಿ 08 ದಿನಾಂಕ 12.08.2008 ರಲ್ಲಿ ಪತ್ರಪಾಲಕರ ಹುದ್ದೆಗೆ ನೀಡಿದ ಸ್ಥಾನಪನ್ನ ಮುಂಬಡ್ತಿಯನ್ನು ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 4(ಎ)ರನ್ವಯ ದಿ: 12-8-2008 ರಿಂದಲೇ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.146

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,

ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಬೆಳಗಾಂ ಜಿಲ್ಲೆ, ಖಾನಾಪುರ ತಾಲೂಕಿಗೆ ಸೇರಿದ ನಂದಗಡ ಗ್ರಾಮದಲ್ಲಿ ಸಂಗೊಳ್ಳಿರಾಯಣ್ಣ ಸ್ಮಾರಕ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ: ಕಸನಿ 76 ಸ್ಮಾರಕ 1999-2000, ದಿ: 07-07-2008
2. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ: ಕಸನಿ 76 ಸ್ಮಾರಕ 1999-2000, ದಿ: 02-09-2008

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರ ದಿನಾಂಕ 07-07-2008ರ ಪತ್ರದಲ್ಲಿ ಜಿಲ್ಲಾಧಿಕಾರಿಗಳು ಬೆಳಗಾಂ ಜಿಲ್ಲೆ ಅವರು ಬೆಳಗಾಂ ಜಿಲ್ಲೆ, ಖಾನಾಪುರ ತಾಲೂಕಿಗೆ ಸೇರಿದ ನಂದಗಡ ಗ್ರಾಮದಲ್ಲಿ ಸಂಗೊಳ್ಳಿರಾಯಣ್ಣ ಸ್ಮಾರಕ ಅಭಿವೃದ್ಧಿಗೆ 100.00 ಲಕ್ಷಗಳನ್ನು ಆದ್ಯತೆ ಮೇಲೆ ಬಿಡುಗಡೆ ಮಾಡಲು ಕೋರಿರುತ್ತಾರೆಂದು ತಿಳಿಸುತ್ತಾ, ಪ್ರಸ್ತಾವನೆಯನ್ನು ಪರಿಶೀಲಿಸಿ ಪ್ರಸಕ್ತ ಸಾಲಿನಲ್ಲಿ ರೂ.25.00 ಲಕ್ಷದ ಅನುದಾನವನ್ನು ನೀಡಲು ಸರ್ಕಾರದ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ.

ಮೇಲೆ (2)ರಲ್ಲಿ ಓದಲಾದ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರ ದಿನಾಂಕ 02-09-2008ರ ಪತ್ರದಲ್ಲಿ 2008-09ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯಮುಖ್ಯಮಂತ್ರಿಯವರು ಈ ಯೋಜನೆಗೆ 100.00 ಲಕ್ಷಗಳ ಅನುದಾನ ಘೋಷಿಸಿದ್ದು ಆಯವ್ಯಯದಲ್ಲಿ ಒದಗಿಸಿರುವುದಿಲ್ಲ. ಆದುದರಿಂದ ಈ ಹಣವನ್ನು ಲೆಕ್ಕಶೀರ್ಷಿಕೆ "2205-00-102-4-03-100 ಯೋಜನೆ ಜಿಲ್ಲಾ ರಂಗಮಂದಿರಗಳಿಗೆ ಧನಸಹಾಯ" ದಡಿ ಒದಗಿಸಿ ಜಿಲ್ಲಾಧಿಕಾರಿಗಳು ಬೆಳಗಾಂ ಜಿಲ್ಲೆ ಇವರಿಗೆ ಬಿಡುಗಡೆ ಮಾಡಬಹುದೆಂದು ಕೋರಿರುತ್ತಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 24 ಸ್ಮಾಪ್ರನಿ 2008, ಬೆಂಗಳೂರು, ದಿನಾಂಕ: 15ನೇ ಜನವರಿ 2009

ಬೆಳಗಾಂ ಜಿಲ್ಲೆ, ಖಾನಾಪುರ ತಾಲೂಕಿಗೆ ಸೇರಿದ ನಂದಗಡ ಗ್ರಾಮದಲ್ಲಿ ಸಂಗೊಳ್ಳಿರಾಯಣ್ಣ ಸ್ಮಾರಕ ನಿರ್ಮಿಸುವುದಕ್ಕಾಗಿ ರೂ.25.00 ಲಕ್ಷಗಳನ್ನು (ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಜಿಲ್ಲಾಧಿಕಾರಿಗಳು, ಬೆಳಗಾಂ ಜಿಲ್ಲೆ, ಬೆಳಗಾಂ ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಅವರಿಗೆ ಈ ಕೆಳಕಂಡ ಷರತ್ತಿಗೆ ಒಳಪಟ್ಟು ಸರ್ಕಾರದ ಮಂಜೂರಾತಿ ನೀಡಲಾಗಿದೆ ಹಾಗೂ ಬೆಳಗಾಂ ಜಿಲ್ಲಾಡಳಿತದವರು ಈ ಯೋಜನೆಯು ಪೂರ್ಣಗೊಳ್ಳುವವರೆಗೆ ಇದರ ಉಸ್ತುವಾರಿಯನ್ನು ನೋಡಿಕೊಳ್ಳುವುದು.

ಷರತ್ತುಗಳು:

ಅ) ಈ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಕೆಯಾಗುವಂತೆ ಇಲಾಖೆಯು ನೋಡಿಕೊಳ್ಳತಕ್ಕದ್ದು ಹಾಗೂ ಈ ಯೋಜನೆಯನ್ನು ಕನಿಷ್ಟ 10 ತಿಂಗಳ ಅವಧಿಯೊಳಗೆ ಮುಕ್ತಾಯಗೊಳಿಸಲು ಕ್ರಮ ವಹಿಸತಕ್ಕದ್ದು.

ಆ) ಈ ಸ್ಮಾರಕಕ್ಕೆ ಸಕ್ಷಮ ಪ್ರಾಧಿಕಾರವಾಗಿ ಜಿಲ್ಲಾಧಿಕಾರಿಗಳು, ಬೆಳಗಾಂ ಜಿಲ್ಲೆ, ಬೆಳಗಾಂ ಅವರು ಕರ್ತವ್ಯ ನಿರ್ವಹಿಸತಕ್ಕದ್ದು.

ಇ) ಈ ಕಾಮಗಾರಿಗಳನ್ನು ಕೈಗೊಳ್ಳುವ ಮುನ್ನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಕಾಯ್ದೆ/ನಿಯಮಗಳಂತೆ ಟೆಂಡರ್ ಪ್ರಕ್ರಿಯೆ ನಡೆಸಿ ಕ್ರಮ ಕೈಗೊಳ್ಳತಕ್ಕದ್ದು.

ಈ) ಈ ಯೋಜನೆಗೆ ಸಂಬಂಧಪಟ್ಟ ಲೋಕೋಪಯೋಗಿ ಇಲಾಖಾ ಅಭಿಯಂತರರಿಂದ ಯೋಜನೆ ನಕ್ಷೆ ಮತ್ತು ಅಂದಾಜನ್ನು ಅನುಮೋದಿಸಿಕೊಳ್ಳತಕ್ಕದ್ದು.

ಉ) ಹಣ ಬಳಕೆಯ ಪ್ರಮಾಣಪತ್ರವನ್ನು ಸರ್ಕಾರಕ್ಕೆ ಸಲ್ಲಿಸುವುದು.

ಈ ಅನುದಾನವನ್ನು, 2008-09ನೇ ಸಾಲಿನ ಲೆಕ್ಕ ಶೀರ್ಷಿಕೆ 2205-00-102-4-31-059 (ಯೋಜನೆ) ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು, ಆರ್ಥಿಕ ಇಲಾಖೆಯ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಆಇ 2177 ವೆಚ್ಚ-5 2008, ದಿನಾಂಕ: 24-11-08 ಹಾಗೂ ಯೋಜನಾ ಇಲಾಖೆಯ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಪಿಡಿ 130 ಎಂ&ಇ 2008, ದಿನಾಂಕ: 17-12-08 ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್.482

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ).

ವಿಷಯ: ಡಾ: ಶಿವರಾಮ ಕಾರಂತರ ಹೆಸರಿನಲ್ಲಿ ಸ್ಮಾರಕ ನಿರ್ಮಿಸಲು ಅನುದಾನ ನೀಡುವ ಬಗ್ಗೆ.

ಓದಲಾಗಿದೆ: 1. ಅಧ್ಯಕ್ಷರು, 1ನೇ ಕೋಟ ಕೋಟತಟ್ಟು ಗ್ರಾಮ ಪಂಚಾಯತಿ, ಉಡುಪಿ ಜಿಲ್ಲೆ, ಇವರ ಪತ್ರ ಸಂಖ್ಯೆ: 148/2008-09, ದಿ: 10-10-08

2. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 442 ಬಿಆರ್‌ಎಸ್ 2008, ದಿನಾಂಕ: 24-11-2008

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ಪತ್ರದಲ್ಲಿ ಅಧ್ಯಕ್ಷರು, 1ನೇ ಕೋಟ ಕೋಟತಟ್ಟು ಗ್ರಾಮ ಪಂಚಾಯತಿ, ಉಡುಪಿ ಜಿಲ್ಲೆ, ಇವರು ಜ್ಞಾನಪೀಠ ಪ್ರಶಸ್ತಿ ವಿಜೇತ ಕೋಟ ಶಿವರಾಮ ಕಾರಂತರು ಕೋಟತಟ್ಟು ಗ್ರಾಮದಲ್ಲಿ ಹುಟ್ಟಿದ್ದು. ಸದರಿ ಗ್ರಾಮದಲ್ಲಿ ಕಾರಂತರ ಸ್ಮಾರಕ ನಿರ್ಮಿಸಲು 1.00 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮೇಲೆ (2)ರಲ್ಲಿ ಓದಲಾದ ದಿನಾಂಕ: 24-11-2008 ರ ಸರ್ಕಾರದ ಆದೇಶದಲ್ಲಿ 2008-09ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-31-059 (ಯೋಜನೆ) ಅಡಿ ಈ ಸ್ಮಾರಕ ನಿರ್ಮಾಣಕ್ಕೆ ಹೆಚ್ಚುವರಿ ರೂ. 1.00 ಕೋಟಿ ಅನುದಾನವನ್ನು ಒದಗಿಸಿದ್ದು, ಈ ಮೊತ್ತವನ್ನು ಪ್ರಸಕ್ತ ಆರ್ಥಿಕ ವರ್ಷದ ಅಂತ್ಯದೊಳಗಿನ ಒಟ್ಟಾರೆ ಉಳಿತಾಯ/ ಪೂರಕ ಅಂದಾಜುಗಳ ಪುನರ್ ವಿನಿಯೋಗದಿಂದ ಭರಿಸಬಹುದೆಂದು ತಿಳಿಸಲಾಗಿದೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 37 ಸ್ಮಾಪ್ರನಿ 2008, ಬೆಂಗಳೂರು, ದಿನಾಂಕ: 19ನೇ ಡಿಸೆಂಬರ್ 2008

ಉಡುಪಿ ಜಿಲ್ಲೆಯ, ಕೋಟತಟ್ಟು ಗ್ರಾಮದಲ್ಲಿ ಡಾ: ಶಿವರಾಮ ಕಾರಂತರ ಸ್ಮಾರಕ ಮತ್ತು ರಂಗಮಂದಿರ ನಿರ್ಮಾಣ ಮಾಡಲು, ಮೇಲೆ ಓದಲಾದ (2)ರ ಆದೇಶದಲ್ಲಿ ಹೆಚ್ಚುವರಿಯಾಗಿ ಒದಗಿಸಿರುವ ರೂ. 1.00 ಕೋಟಿ (ಒಂದು ಕೋಟಿ ರೂಪಾಯಿಗಳು ಮಾತ್ರ) ಗಳನ್ನು ಜಿಲ್ಲಾಧಿಕಾರಿಗಳು, ಉಡುಪಿ ಜಿಲ್ಲೆ, ಉಡುಪಿ, ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರಿಗೆ ಈ ಕೆಳಕಂಡ ಷರತ್ತಿಗೆ ಒಳಪಟ್ಟು ಸರ್ಕಾರದ ಮಂಜೂರಾತಿ ನೀಡಲಾಗಿದೆ ಹಾಗೂ ಉಡುಪಿ ಜಿಲ್ಲಾಡಳಿತದವರು ಈ ಯೋಜನೆಯು ಪೂರ್ಣಗೊಳ್ಳುವವರೆಗೆ ಇದರ ಉಸ್ತುವಾರಿಯನ್ನು ನೋಡಿಕೊಳ್ಳುವುದು.

ಷರತ್ತುಗಳು:

ಅ) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999ರ ಪ್ರಕಾರ ಕ್ರಮ ವಹಿಸುವುದು

ಆ) ಈ ಯೋಜನೆಗೆ ಸಂಬಂಧಪಟ್ಟ ಲೋಕೋಪಯೋಗಿ ಇಲಾಖಾ ಅಭಿಯಂತರರಿಂದ ಯೋಜನೆ ನಕ್ಷೆ ಮತ್ತು ಅಂದಾಜನ್ನು ಅನುಮೋದಿಸಿಕೊಳ್ಳತಕ್ಕದ್ದು.

ಇ) ಈ ಅನುದಾನವನ್ನು, ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಕೆಯಾಗುವಂತೆ ಇಲಾಖೆಯು ನೋಡಿಕೊಳ್ಳತಕ್ಕದ್ದು ಹಾಗೂ ಈ ಯೋಜನೆಯನ್ನು ಕನಿಷ್ಠ 10 ತಿಂಗಳ ಅವಧಿಯೊಳಗೆ ಮುಕ್ತಾಯಗೊಳಿಸಲು ಕ್ರಮ ವಹಿಸತಕ್ಕದ್ದು.

ಈ) ಒಂದೇ ಬಾರಿಗೆ ಈ ಅನುದಾನ ಮೊತ್ತವಾಗಿದ್ದು, ಈ ಸ್ಮಾರಕ ರಂಗಮಂದಿರದ ಸಕ್ಷಮ ಪ್ರಾಧಿಕಾರವಾಗಿ ಕೋಟತಟ್ಟು ಗ್ರಾಮ ಪಂಚಾಯತ್ ಉಡುಪಿ ಜಿಲ್ಲೆರವರು ನಿರ್ವಹಿಸತಕ್ಕದ್ದು ಹಾಗೂ ಈ ಯೋಜನೆಗೆ

ಮುಂಬರುವ ಖರ್ಚು ವೆಚ್ಚಗಳನ್ನು ಕೋಟತಟ್ಟು ಗ್ರಾಮ ಪಂಚಾಯತ್ ಉಡುಪಿ ಜಿಲ್ಲೆ ಅವರೇ ಭರಿಸತಕ್ಕದ್ದು.

ಉ) ಹಣ ಬಳಕೆಯ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸುವುದು.

ಈ ಮೊತ್ತವನ್ನು 2008-09ನೇ ಸಾಲಿನ ಲೆಕ್ಕ ಶೀರ್ಷಿಕೆ 2205-00-102-4-31-059 (ಯೋಜನೆ) ಅಡಿಯಲ್ಲಿ ಹೆಚ್ಚುವರಿ ಅನುದಾನದಡಿ ಬಿಡುಗಡೆ ಮಾಡಿದೆ.

ಈ ಹೆಚ್ಚುವರಿ ಅನುದಾನವನ್ನು ಪ್ರಸಕ್ತ ಆರ್ಥಿಕ ವರ್ಷದ ಅಂತ್ಯದೊಳಗಿನ ಒಟ್ಟಾರೆ ಉಳಿತಾಯ/ ಪೂರಕ ಅಂದಾಜುಗಳ ಮುನರ್ ವಿನಿಯೋಗದಿಂದ ಭರಿಸಿ, ಅನುದಾನ ಸಂಖ್ಯೆಯ 25ರಡಿ ಕ್ರಮಬದ್ಧಗೊಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಆಇ 2409 ವೆಚ್ಚ-5 2008, ದಿನಾಂಕ: 25-11-08 ಹಾಗೂ ಯೋಜನಾ ಇಲಾಖೆಯ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಪಿಡಿ 128 ಎಂಇ 2008, ದಿನಾಂಕ: 04-12-08 ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್.145

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಬೀದರ್ ಜಿಲ್ಲೆ ಔರಾದ್ ತಾಲ್ಲೂಕು ಕಮಲಾನಗರದಲ್ಲಿ ಶ್ರೀ ಲಿಂಗೈಕ್ಯ ಚನ್ನಬಸವ ಪಟ್ಟದೇವರು ಇವರ ಹೆಸರಿನಲ್ಲಿ ಸ್ಮಾರಕ ಭವನ ನಿರ್ಮಾಣಕ್ಕೆ ಅನುದಾನ ಕೋರಿ.

ಓದಲಾಗಿದೆ:
1. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರ ಪತ್ರ ಸಂಖ್ಯೆ: ಕಸನಿ 2 ಸ್ಮಾರಕ 2006-07, ದಿನಾಂಕ 27.06.2008.
2. ಸರ್ಕಾರದ ಪತ್ರ ಸಂಖ್ಯೆ: ಕಸಂವಾಪ್ರ 18 ಸ್ಮಾಪ್ರನಿ 08 ದಿ:30.10.2008.
3. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರ ಪತ್ರ ಸಂಖ್ಯೆ: ಕಸನಿ 2 ಸ್ಮಾರಕ 2006-07, ದಿನಾಂಕ 26.11.2008.

ಪ್ರಸ್ತಾವನೆ:

ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆರವರು ಮೇಲೆ(1) ರಲ್ಲಿ ಓದಲಾದ ದಿನಾಂಕ 27.06.2008ರ ಪತ್ರದಲ್ಲಿ ಶ್ರೀ ಲಿಂಗೈಕ್ಯ ಚನ್ನಬಸವ ಪಟ್ಟದೇವರು ಗಡಿನಾಡಿನಲ್ಲಿ ಕನ್ನಡದ ಉಳಿವಿಗಾಗಿ ಶ್ರಮಿಸಿದ್ದು, ಕರ್ನಾಟಕದ ಏಕೀಕರಣಕ್ಕಾಗಿ ಹೋರಾಡಿ ಬೀದರ್ ಜಿಲ್ಲೆಯು ಕರ್ನಾಟಕದಲ್ಲಿ ಉಳಿಯುವಂತೆ ಮಾಡಿರುತ್ತಾರೆಂದು ಇವರು ಕನ್ನಡಪರ ಕಾರ್ಯ ಮಾಡಿರುವುದರಿಂದ ಇವರು ಕರ್ನಾಟಕದ ಮಹಾಪುರುಷರಲ್ಲಿ ಒಬ್ಬರಾಗಿ ಗುರುತಿಸಲ್ಪಟ್ಟಿದ್ದು, ಇವರ ನೆನಪಿನಲ್ಲಿ ಸ್ಮಾರಕ ಭವನ ನಿರ್ಮಾಣ ಮಾಡುವುದು ಸೂಕ್ತವೆಂದು ಅಭಿಪ್ರಾಯ ಪಟ್ಟಿರುತ್ತಾರೆ. ಈ ಯೋಜನೆಗೆ 2008-09 ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-31-059ರ ಅಡಿ ರೂ.50.00 ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರದ ದಿ: 30.10.2008ರ ಪತ್ರದಲ್ಲಿ ಈ ಯೋಜನೆಗೆ ಕೆಲಸ ಪ್ರಾರಂಭಿಸಲು ಮಾನ್ಯ ಮುಖ್ಯಮಂತ್ರಿಯವರು ಸೂಚಿಸಿರುವುದರಿಂದ ಇಲಾಖೆಯ ಲೆಕ್ಕಶೀರ್ಷಿಕೆ 2205-00-102-4-31-059 (ಯೋಜನೆ) ಅಡಿಯಲ್ಲಿ ಒದಗಿಸಿರುವ ರೂ.20.00 ಕೋಟಿಯಲ್ಲಿ ಈ ಕಾಮಗಾರಿಗೆ ಹಣ ಹಂಚಿಕೆ ಮಾಡಿ ಕ್ರಿಯಾಯೋಜನೆಯಲ್ಲಿ ಅನುಮೋದಿಸಿಕೊಂಡು ನಿಯಮಾನುಸಾರ ಕಾಮಗಾರಿಯನ್ನು ಕೈಗೊಳ್ಳಬೇಕೆಂದು ತಿಳಿಸಲಾಗಿತ್ತು.

ಮೇಲೆ (3)ರಲ್ಲಿ ಓದಲಾದ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆರವರು ಮೇಲೆ ಓದಲಾದ ದಿನಾಂಕ 26.11.2008ರ ಪತ್ರದಲ್ಲಿ ಈ ಕಾಮಗಾರಿಗೆ ಜಿಲ್ಲಾ ರಂಗಮಂದಿರದ ನಿರ್ವಹಣೆಯ ಲೆಕ್ಕಶೀರ್ಷಿಕೆ 2205-00-102-4-03-100 (ಯೋಜನೆ) ರಡಿ ಉಳಿದಿರುವ ಮೊತ್ತ ರೂ.107.00 ಲಕ್ಷಗಳಲ್ಲಿ ರೂ.50.00 ಲಕ್ಷಗಳನ್ನು ಬಿಡುಗಡೆ ಮಾಡಬಹುದೆಂದು ತಿಳಿಸಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ ಕಸಂವಾಪ್ರ 18 ಸ್ಮಾಪ್ರನಿ 2008, ಬೆಂಗಳೂರು, ದಿನಾಂಕ 31ನೇ ಜನವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಬೀದರ್ ಜಿಲ್ಲೆ ಔರಾದ್ ತಾಲ್ಲೂಕು ಕಮಲಾನಗರದಲ್ಲಿ ಶ್ರೀ ಲಿಂಗೈಕ್ಯ ಚನ್ನಬಸವ ಪಟ್ಟದೇವರು ಇವರ ಹೆಸರಿನಲ್ಲಿ ಸ್ಮಾರಕ ಭವನ ನಿರ್ಮಾಣಕ್ಕೆ ರೂ.50.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಬೀದರ್

ಜಿಲ್ಲೆ, ಬೀದರ ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಲಾಗಿದೆ. ಹಾಗೂ ಬೀದರ್ ಜಿಲ್ಲಾಧಿಕಾರಿಗಳು ಈ ಯೋಜನೆ ಪೂರ್ಣಗೊಳ್ಳುವವರೆಗೆ ಇದರ ಉಸ್ತುವಾರಿ ನೋಡಿಕೊಳ್ಳುವುದು.

ಷರತ್ತುಗಳು:

ಅ) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ನಿಯಮಗಳು 2000ರ ಪ್ರಕಾರ ಕ್ರಮ ವಹಿಸುವುದು

ಆ) ಈ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಕೆಯಾಗುವಂತೆ ಇಲಾಖೆಯು ನೋಡಿಕೊಳ್ಳತಕ್ಕದ್ದು ಹಾಗೂ ಈ ಯೋಜನೆಯನ್ನು ಕನಿಷ್ಟ ಅವಧಿಯೊಳಗೆ ಮುಕ್ತಾಯಗೊಳಿಸಿ ತತ್ಸಂಬಂಧ ಹಣ ಬಳಕೆಯ ಪ್ರಮಾಣಪತ್ರವನ್ನು ಸರ್ಕಾರಕ್ಕೆ ಸಲ್ಲಿಸುವುದು.

ಇ) ಜಿಲ್ಲಾಧಿಕಾರಿಗಳ ಸಮಿತಿ ಉಸ್ತುವಾರಿ ಮಾಡುವುದು

ಈ ಮೊತ್ತವನ್ನು, 2008-09ನೇ ಸಾಲಿನ ಲೆಕ್ಕ ಶೀರ್ಷಿಕೆ 2205-00-102-4-03-100 (ಯೋಜನೆ) ಅಡಿಯಲ್ಲಿನ ಅನುದಾನದಡಿ ಭರಿಸತಕ್ಕದ್ದು.

ಈ ಆದೇಶವನ್ನು ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಇಡಿ 113 ಐಎಫ್(ಬಿಎ) 2009, ದಿನಾಂಕ 23.01.2009ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.578

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಶ್ರೀ ಎಂ. ಮಾದೇಗೌಡ, ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಅಮಾನತ್ತಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಸಂಕಇ 28 ಕಸನಿ 97(ಭಾ) ದಿನಾಂಕ 19.4.1997.
2. ಮೈಸೂರು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿನ ಪ್ರಕರಣ ಸಂಖ್ಯೆ: 248/97 ಮತ್ತು 127/98ರಲ್ಲಿ ದಿನಾಂಕ 18.4.2006ರಂದು ನೀಡಿರುವ ತೀರ್ಪು.
3. ಪತ್ರ ಸಂಖ್ಯೆ: ಹೆಚ್‌ಡಿ 6207 ಸಿಪಿ2/06 ದಿನಾಂಕ 28.8.2006.
4. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ: ಕಸನಿ:7: ಸಿಬ್ಬಂದಿ:2:1997-98 ದಿನಾಂಕ 21.07.2008

ಪ್ರಸ್ತಾವನೆ:

ಶ್ರೀ ಎಂ. ಮಾದೇಗೌಡ, ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಚಿಕ್ಕಮಗಳೂರು ಇವರು ಈ ಹಿಂದೆ ಮಂಡ್ಯ ಜಿಲ್ಲೆಯ ಸಹಾಯಕ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕೊಲೆ ಪ್ರಕರಣದಲ್ಲಿ ಭಾಗಿಯಾಗಿದ್ದಾರೆಂದು ಇಲವಾಲ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ ಇವರನ್ನು ದಸ್ತಗಿರಿ ಮಾಡಿ ಮೈಸೂರಿನ ನ್ಯಾಯಾಲಯದಲ್ಲಿ ಆರೋಪಿಯನ್ನು ಹಾಜರುಪಡಿಸಿದ್ದ ಹಿನ್ನೆಲೆಯಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ದಿನಾಂಕ 15.4.1997ರಿಂದ ಜಾರಿಗೆ ಬರುವಂತೆ ಇವರನ್ನು ಅಮಾನತ್ತಿನಲ್ಲಿಡಲಾಗಿತ್ತು. ತದನಂತರ ದಿನಾಂಕ 18.9.1997ರಂದು ಸರ್ಕಾರವು ಇವರ ಅಮಾನತ್ತಿನ ಆದೇಶವನ್ನು ರದ್ದುಪಡಿಸಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಆದೇಶದಂತೆ ಮೈಸೂರಿನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಪ್ರಕರಣ ಸಂಖ್ಯೆ: ಎಸ್.ಸಿ/248/1997 ಮತ್ತು 127/1998ರಲ್ಲಿ ದಿನಾಂಕ 18.04.2006ರಂದು ತೀರ್ಪು ನೀಡಿ ಶ್ರೀ ಎಂ. ಮಾದೇಗೌಡ ತಂದೆ ಮುನಿಗೌಡ, ಪ್ರಕರಣದ ಆರೋಪಿ ಸಂಖ್ಯೆ(2) ಇವರನ್ನು ಇವರ ಮೇಲೆ ಹೊರಿಸಿರುವ ಆರೋಪದಿಂದ ಖುಲಾಸೆಗೊಳಿಸಿ ದೋಷಮುಕ್ತರನ್ನಾಗಿ ಮಾಡಿ ಬಿಡುಗಡೆ ಆದೇಶ ಹೊರಡಿಸಿರುತ್ತದೆ. ಈ ಆದೇಶದ ವಿರುದ್ಧ ಯಾವುದೇ ಮೇಲ್ಮನವಿಯನ್ನು ಸಲ್ಲಿಸಲು ಅರ್ಹ ಪ್ರಕರಣವಲ್ಲವೆಂದು ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ಸರ್ಕಾರವು ತೀರ್ಮಾನಿಸಿರುತ್ತದೆ.

ಶ್ರೀ ಎಂ. ಮಾದೇಗೌಡ, ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಚಿಕ್ಕಮಗಳೂರು ಇವರನ್ನು ಅಮಾನತ್ತಿನಲ್ಲಿಟ್ಟಿದ ದಿನಾಂಕ 15.4.1997ರಿಂದ 19.9.1997ರವರೆಗಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವಂತೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಪತ್ರದಲ್ಲಿ ಕೋರಿರುತ್ತಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 167 ಕಸನಿ 2007, ಬೆಂಗಳೂರು, ದಿನಾಂಕ: 6ನೇ ಜನವರಿ 2009

ಶ್ರೀ ಎಂ. ಮಾದೇಗೌಡ, ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಚಿಕ್ಕಮಗಳೂರು ಇವರನ್ನು ಅಮಾನತ್ತಿನಲ್ಲಿಟ್ಟದ್ದ ದಿನಾಂಕ 15.4.1997 ರಿಂದ 19.9.1997ರ ವರೆಗಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.407

ಎಂ.ಕೆ. ಭರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ರವೀಂದ್ರ ಕಲಾಕ್ಷೇತ್ರದ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಪುಸ್ತಕ ಮಾರಾಟ ಮಳಿಗೆಗೆ ರ್‍ಯಾಕ್‌ಗಳನ್ನು ಮಾಡಿಸಿದ ವೆಚ್ಚ ಪಾವತಿ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ: ಕಸನಿ/5/2003-04, ದಿನಾಂಕ 21-10-2008.

ಪ್ರಸ್ತಾವನೆ:

ಮೇಲೆ ಓದಲಾದ ದಿ: 21-10-08ರ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರ ಪತ್ರದಲ್ಲಿ ರವೀಂದ್ರ ಕಲಾಕ್ಷೇತ್ರದ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಪುಸ್ತಕ ಮಾರಾಟ ಮಳಿಗೆಗೆ ರ್‍ಯಾಕ್‌ಗಳನ್ನು ಮಾಡಿಸಿದ ವೆಚ್ಚದ ಸಂಬಂಧ ಅಭಿಯಂತರರು, ನಂ.7, ಕಟ್ಟಡಗಳ ಉಪ ವಿಭಾಗ, ಬೆಂಗಳೂರು ಇವರು ಮನವಿ ಮಾಡಿ ಪುಸ್ತಕ ರ್‍ಯಾಕ್ ತಯಾರಿಸಲು ರೂ.8.00 ಲಕ್ಷಗಳನ್ನು ಠೇವಣಿ ಕರಿಸಲಾಗಿತ್ತು. ಆದರೆ ಸರ್ಕಾರದ ಪ್ರಧಾನ ಮುಖ್ಯವಾಸ್ತು ಶಿಲ್ಪಗಳ ನೀಲಿ ನಕ್ಷೆಯಂತೆ ಪುಸ್ತಕ ರ್‍ಯಾಕನ್ನು ನಿರ್ಮಿಸಲು ಟೆಂಡರ್ ಪ್ರೀಮಿಯಂ ಸೇರಿ ರೂ.22.00 ಲಕ್ಷಗಳು ವೆಚ್ಚವಾಗಿದ್ದು, ಸದರಿ ರ್‍ಯಾಕ್‌ಗಳನ್ನು ನಿರ್ಮಿಸಲು ಒಟ್ಟು ರೂ.14.00 ಲಕ್ಷಗಳು ಹೆಚ್ಚುವರಿಯಾಗಿ ಕಾರ್ಯಪಾಲಕ ಅಭಿಯಂತರರು, ನಂ.7, ಕಟ್ಟಡಗಳ ಉಪ ವಿಭಾಗ, ಇವರಿಗೆ ಠೇವಣಿ ಇಡಲು ಕೋರಿರುತ್ತಾರೆ. ಈಗಾಗಲೇ ಕಾರ್ಯಪಾಲಕ ಅಭಿಯಂತರರು, ನಂ.7, ಕಟ್ಟಡಗಳ ಉಪ ವಿಭಾಗ, ಬೆಂಗಳೂರು ಇವರಿಗೆ ಠೇವಣಿ ಮಾಡಲಾಗಿದ್ದು, ರೂ.37.31 ಲಕ್ಷಗಳಲ್ಲಿ ರೂ.2,31,000ಗಳು ವೆಚ್ಚವಾಗದೆ, ಬಾಕಿ ಇದ್ದು ಹೀಗಾಗಿ ಸದರಿಯವರಿಗೆ ರೂ.11.69 ಲಕ್ಷಗಳನ್ನು ಠೇವಣಿಯಾಗಿ ಇಡಬೇಕಾಗಿರುವುದರಿಂದ ಈ ಮೊತ್ತವನ್ನು ಪ್ರಸ್ತಕ ಸಾಲಿನ ಲೆಕ್ಕಶೀರ್ಷಿಕೆ 2205-00-102-4-31-059 (ಯೋಜನೆ) ಶೀರ್ಷಿಕೆಯಡಿ ಅವಕಾಶ ಮಾಡಿಕೊಂಡಿರುವ ರೂ.50.00ಲಕ್ಷಗಳಲ್ಲಿ ಪಾವತಿಸಲು ನಿರ್ಧರಿಸಿರುವ ಹಿನ್ನಲೆಯಲ್ಲಿ ರೂ.11.69 ಲಕ್ಷಗಳನ್ನು ಮಂಜೂರು ಮಾಡಿ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 137 ಕಸನಿ 2008, ಬೆಂಗಳೂರು, ದಿನಾಂಕ: 1ನೇ ಜನವರಿ 2009

ರವೀಂದ್ರ ಕಲಾಕ್ಷೇತ್ರದ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಪುಸ್ತಕ ಮಾರಾಟ ಮಳಿಗೆಗೆ ರ್‍ಯಾಕ್‌ಗಳನ್ನು ಮಾಡಿಸಿದ ಬಾಬ್ತು ಠೇವಣಿ ಮೊತ್ತ ರೂ.11,69.000.00 (ರೂಪಾಯಿ ಹನ್ನೊಂದು ಲಕ್ಷದ ಅರತೊಂಬತ್ತು ಸಾವಿರ ಮಾತ್ರ) ಗಳನ್ನು ಕಾರ್ಯಪಾಲಕ ಅಭಿಯಂತರರು, ನಂ.7, ಕಟ್ಟಡಗಳ ಉಪವಿಭಾಗ, ಲೋಕೋಪಯೋಗಿ ಇಲಾಖೆ ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ:

1. ಈ ಯೋಜನೆಯನ್ನು ಪಾರದರ್ಶಕ ನಿಯಮ 1999-2000ಗಳನ್ನು ಅನುಸರಿಸಿ ಕ್ರಮ ವಹಿಸುವುದು.
2. ಯೋಜನೆಗೆ ಸಂಬಂಧಿಸಿದ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.

ಈ ವೆಚ್ಚವನ್ನು 2008-09ನೇ ಸಾಲಿನ ಲೆಕ್ಕಶೀರ್ಷಿಕ 2205-00-102-4-31-059 (ಯೋಜನೆ)ರಡಿ ಭರಿಸತಕ್ಕದ್ದು.

ಈ ಆದೇಶವನ್ನು ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಹಾಗೂ ಪ್ರವಾಸೋದ್ಯಮ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಇಡಿ 1448 ಐಎಫ್ (ಜಿಎ) 2008, ದಿನಾಂಕ: 21-11-2008ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.278

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,

ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ ಅವರ ಆಪ್ತ ಶಾಖೆಗೆ ಆಪ್ತ ಸಹಾಯಕರನ್ನು ಹಾಗೂ ವಾಹನ ಚಾಲಕರನ್ನು ನೇಮಿಸುವ ಬಗ್ಗೆ.

ಓದಲಾಗಿದೆ: 1. ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ ಅವರ ಟಿಪ್ಪಣಿ ಸಂಖ್ಯೆ ಕ.ಪು.ಪ್ರಾ.:ಅ:12: 2008-09, ದಿನಾಂಕ: 25.8.2008.

2. ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ ಅವರ ಟಿಪ್ಪಣಿ ಸಂಖ್ಯೆ ಕ.ಪು.ಪ್ರಾ:ಅ:ಸಿಬ್ಬಂದಿ-3:2008-09, ದಿನಾಂಕ:19.9.2008.

ಪ್ರಸ್ತಾವನೆ:

ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ ಅವರ ಮೇಲೆ (1) ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಅವರ ಅಧಿಕೃತ ವಾಹನಕ್ಕೆ ಶ್ರೀ ಬಿ.ಪಿ. ಪ್ರಕಾಶ್ ಇವರನ್ನು ದಿನಾಂಕ:12.6.2008 ರಿಂದ ವಾಹನ ಚಾಲಕರನ್ನಾಗಿ ನೇಮಕ ಮಾಡಿಕೊಂಡಿದ್ದು, ಸದರಿ ಪ್ರಸ್ತಾವನೆಯನ್ನು ಹಿಂದಕ್ಕೆ ಪಡೆದು, ದಿನಾಂಕ:25.8.2008 ರಿಂದ ಜಾರಿಗೆ ಬರುವಂತೆ ಶ್ರೀ ಈ. ಶಂಕರ್, ಬೆಂಗಳೂರು ಇವರನ್ನು ಅವರ ಅಧಿಕೃತ ವಾಹನದ ವಾಹನ ಚಾಲಕರನ್ನಾಗಿ ನೇಮಕ ಮಾಡಿಕೊಂಡಿದ್ದು, ಸೂಕ್ತ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲೆ (2) ರಲ್ಲಿ ಓದಲಾದ ದಿನಾಂಕ:19.9.2008ರ ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ ಅವರ ಟಿಪ್ಪಣಿಯಲ್ಲಿ ದಿನಾಂಕ:19.9.2008 ರ ಪೂರ್ವಾಹ್ನದಿಂದ ಜಾರಿಗೆ ಬರುವಂತೆ ಅವರ ಆಪ್ತ ಸಹಾಯಕರನ್ನಾಗಿ ಕು: ಇಂದಿರಾ ಎನ್., ಬೆಂಗಳೂರು ಇವರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಂಡಿದ್ದು, ಈ ಬಗ್ಗೆಯೂ ಸಹ ಅಗತ್ಯ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ ಕಸಂವಾಪ್ರ 72 ಕಸನಿ 2008 (ಭಾಗ) ಬೆಂಗಳೂರು ದಿನಾಂಕ: 1ನೇ ಜನವರಿ 2009

ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ಅವರ ಆಪ್ತ ಶಾಖೆಗೆ ಈ ಕೆಳಕಂಡ ಸಿಬ್ಬಂದಿಗಳನ್ನು ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆಗಳಿಗೆ ಹಾಗೂ ನಮೂದಿಸಿದ ದಿನಾಂಕದಿಂದ ಗುತ್ತಿಗೆ ಆಧಾರದ ಮೇಲೆ ಅಧ್ಯಕ್ಷರ ಪದಾವಧಿಯವರೆಗೆ ಅಥವಾ ಈ ಬಗ್ಗೆ ಮುಂದಿನ ಆದೇಶ ಹೊರಡಿಸುವವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನೇಮಿಸಿಕೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಕ್ರ.ಸಂ.	ಹೆಸರು ಮತ್ತು ವಿಳಾಸ	ನೇಮಕ ಮಾಡಿರುವ ಹುದ್ದೆ	ಜಾರಿಗೆ ಬರುವ ದಿನಾಂಕ
1.	ಕು: ಇಂದಿರಾ ಎನ್, ತಂದೆ ನರಸಿಂಹಯ್ಯ ಟಿ.ಎನ್, ನಂ. 3507/ಸಿ, 6ನೇ ಅಡ್ಡರಸ್ತೆ, ರಾಜಾಜಿನಗರ 2ನೇ ಹಂತ, ಗಾಯತ್ರಿನಗರ, ಬೆಂಗಳೂರು-21	ಆಪ್ತ ಸಹಾಯಕರು	19-09-2008
2.	ಶ್ರೀ ಈ. ಶಂಕರ್, ತಂದೆ ಶ್ರೀ ಈಶ್ವರಾಚಾರ್, ಸಂ. 14, ಹೊಸಕೆರೆಹಳ್ಳಿ, ಕೆರೆಕೋಡಿ, ಮುನೇಶ್ವರ ನಗರ, ಬನಶಂಕರಿ 3ನೇ ಹಂತ, ಬೆಂಗಳೂರು-85	ವಾಹನ ಚಾಲಕರು	25-08-2008

ಈ ನೇಮಕಾತಿಗೆ ಸಂಬಂಧಿಸಿದ ಸೇವಾ ಷರತ್ತು ಮತ್ತು ನಿಬಂಧನೆಗಳನ್ನು ನಂತರ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 277

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,

ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಅ.ನ. ಕೃಷ್ಣರಾಯರ ಸ್ಮಾರಕ ನಿರ್ಮಿಸಲು ಅ.ನ.ಕೃ. ಪ್ರತಿಷ್ಠಾನಕ್ಕೆ ಅನುದಾನ ಮಂಜೂರು ಮಾಡುವ ಬಗ್ಗೆ

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರ ಪತ್ರ ಸಂಖ್ಯೆ: ಕಸನಿ 16 ಸ್ಮಾರಕ 2002-03 ದಿನಾಂಕ 22-09-2008.

ಪ್ರಸ್ತಾವನೆ:

ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರು ಮೇಲೆ ಓದಲಾದ ದಿನಾಂಕ 22.09.2008ರ ಪತ್ರದಲ್ಲಿ ಕನ್ನಡದ ಸುಪ್ರಸಿದ್ಧ ಕಾದಂಬರಿಕಾರ/ಸಾಹಿತಿಗಳಾದ ಅ.ನ. ಕೃಷ್ಣರಾಯರ ಸ್ಮಾರಕ ನಿರ್ಮಿಸಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಬೆಂಗಳೂರಿನ ಜೆ.ಪಿ. ನಗರ ಬಡಾವಣೆಯ 2ನೇ ಹಂತದಲ್ಲಿ 1640 ಚದರ ಮೀಟರುಗಳ ನಾಗರೀಕ ಸೌಲಭ್ಯವುಳ್ಳ ನಿವೇಶನ ಸಂಖ್ಯೆ: 36ಎ(ಪಿ)ನ್ನು ಮಂಜೂರು ಮಾಡಿದೆ. ಸದರಿ ನಿವೇಶನವನ್ನು ಅ.ನ.ಕೃ. ಪ್ರತಿಷ್ಠಾನದವರು ಸ್ಮಾರಕ ನಿರ್ಮಿಸಲು ಒಂದೇ ಕಂತಿನಲ್ಲಿ ರೂ.41.00 ಲಕ್ಷಗಳನ್ನು ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಪಾವತಿಸಿ ವಶಕ್ಕೆ ತೆಗೆದುಕೊಳ್ಳಲು ಮೇಲ್ಕಂಡ ಮೊತ್ತವನ್ನು ಬಿಡುಗಡೆ ಮಾಡಬೇಕೆಂದು ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರು ಕೋರಿರುತ್ತಾರೆ.

ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 56 ಕಸನಿ 2008, ಬೆಂಗಳೂರು, ದಿನಾಂಕ: 20ನೇ ನವೆಂಬರ್ 2008.

ಕನ್ನಡದ ಸುಪ್ರಸಿದ್ಧ ಕಾದಂಬರಿಕಾರರು/ಸಾಹಿತಿಗಳಾದ ಅ.ನ. ಕೃಷ್ಣರಾಯರ ಸ್ಮಾರಕವನ್ನು ಬೆಂಗಳೂರಿನ ಜೆ.ಪಿ.ನಗರ ಬಡಾವಣೆಯ 2ನೇ ಹಂತದಲ್ಲಿ ನಿರ್ಮಿಸಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮಂಜೂರು ಮಾಡಿರುವ 1640 ಚದರ ಮೀಟರುಗಳ ನಾಗರೀಕ ಸೌಲಭ್ಯ ನಿವೇಶನ ಸಂಖ್ಯೆ: 36ಎ(ಪಿ)ನ್ನು ಅ.ನ.ಕೃ. ಪ್ರತಿಷ್ಠಾನದವರು ವಶಕ್ಕೆ ತೆಗೆದುಕೊಳ್ಳಲು ಒಂದೇ ಕಂತಿನಲ್ಲಿ ರೂ.41.00 ಲಕ್ಷಗಳನ್ನು (ರೂಪಾಯಿ ನಲ್ವತ್ತೊಂದು ಲಕ್ಷಗಳು ಮಾತ್ರ) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರಿಗೆ ಈ ಮೂಲಕ ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ವೆಚ್ಚವನ್ನು 2008-09ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-31-059(ಯೋಜನೆ) ಅನಕೃ ಸ್ಮಾರಕ ಶೀರ್ಷಿಕೆಯಡಿ ಕಲೆ ಮತ್ತು ಸಂಸ್ಕೃತಿ ಪ್ರೋತ್ಸಾಹದಡಿ ಭರಿಸತಕ್ಕದ್ದು.

ಈ ಆದೇಶವನ್ನು ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಇಡಿ 1228/ಎಎಫ್‌ಬಿಎ/2008 ದಿನಾಂಕ 25.10.2008 ಹಾಗೂ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ 10.7.96ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.151 **ಎಂ.ಕೆ. ಧರ್ಮರಾಜಪ್ಪ**

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಶ್ರೀಮತಿ ಡಿ.ಎಲ್. ಅಲ್ಮೇಡಾ, ಕಿರಿಯ ಸಹಾಯಕರು, ವಾಯುವ್ಯ ಕರ್ನಾಟಕ ಸಾರಿಗೆ ಸಂಸ್ಥೆ, ಕಾರವಾರ, ಇವರನ್ನು ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಾರವಾರ ಜಿಲ್ಲೆ, ಇಲ್ಲಿಗೆ ನಿಯೋಜನೆ ಮೇಲೆ ನೇಮಿಸುವ ಬಗ್ಗೆ.

ಓದಲಾಗಿದೆ:
1. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ, ಇವರ ಪತ್ರ ಸಂಖ್ಯೆ: ವಾಕರಸಾ/ಕೇಕ/ಹು/ಆಡಳಿತ/ ಎ1/1980, ದಿನಾಂಕ: 19-09-2008.
2. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರ ಪತ್ರ ಸಂಖ್ಯೆ: ಕಸನಿ/169/ ಸಿಬ್ಬಂದಿ1/ 2006-07, ದಿನಾಂಕ: 25-10-2008.

ಪ್ರಸ್ತಾವನೆ:

ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ, ಇವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿ: 19-09-2008ರ ಪತ್ರದಲ್ಲಿ ಶ್ರೀಮತಿ ಡಿ.ಎಲ್. ಅಲ್ಮೇಡಾ, ಕಿರಿಯ ಸಹಾಯಕರು, ವಾಯುವ್ಯ

ಕರ್ನಾಟಕ ಸಾರಿಗೆ ಸಂಸ್ಥೆ, ಕಾರವಾರ, ಅವರ ಸೇವೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ನಿಯೋಜನೆ ಮೇಲೆ ಬಿಟ್ಟುಕೊಡಲು ತಮ್ಮ ಒಪ್ಪಿಗೆ ನೀಡಿರುತ್ತಾರೆ.

ಮೇಲೆ (2)ರಲ್ಲಿ ಓದಲಾದ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಅವರ ಪತ್ರ ದಿ: 25-10-2008 ರಲ್ಲಿ ಸದರಿ ನೌಕರರನ್ನು ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ, ಕಾರವಾರ, ಇಲ್ಲಿ ಖಾಲಿ ಇರುವ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ನಿಯೋಜನೆ ಮೇಲೆ ನೇಮಿಸಲು ಸಹಮತಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 109 ಕಸನಿ 2008, ಬೆಂಗಳೂರು, ದಿನಾಂಕ: 24ನೇ ನವೆಂಬರ್ 2008

ಶ್ರೀಮತಿ ಡಿ.ಎಲ್.ಅಲ್ಮೇಡಾ, ಕಿರಿಯ ಸಹಾಯಕರು, ವಾಯುವ್ಯ ಕರ್ನಾಟಕ ಸಾರಿಗೆ ಸಂಸ್ಥೆ, ಕಾರವಾರ, ಇವರನ್ನು ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಾರವಾರ, ಇಲ್ಲಿ ಖಾಲಿ ಇರುವ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ತಕ್ಷಣದಿಂದ ಜಾರಿಗೆ ಬರುವಂತೆ ನಿಯೋಜನೆ ಮೇಲೆ ನೇಮಿಸಲಾಗಿದೆ.

ಇವರ ನಿಯೋಜನಾ ಷರತ್ತು ಮತ್ತು ನಿಬಂಧನೆಗಳನ್ನು ನಂತರ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 150

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಅನಿವಾಸಿ ಭಾರತೀಯ ಕೋಶ ರಚಿಸುವ ಬಗ್ಗೆ - ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ ಇದರ ಉಪಾಧ್ಯಕ್ಷರ ಆಪ್ತಶಾಖೆಗೆ ಹಾಗೂ ಅವರ ಕಛೇರಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರ ಪತ್ರ ಸಂಖ್ಯೆ: ಕಸಇ/ನಿಆಶಾ/1/2008-09 ದಿನಾಂಕ 24.06.2008.

2) ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 68 ಶಿಸಾನಿ 2008, ದಿನಾಂಕ 05-08-2008.

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿ. 24-06-2008ರ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರದಲ್ಲಿ ಅನಿವಾಸಿ ಕನ್ನಡಿಗರ ಕೋಶ ರಚಿಸುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಲ್ಲಿ ಒಬ್ಬ ಉಪ ಕಾರ್ಯದರ್ಶಿ ಹುದ್ದೆಗೆ ಸಮಾನದ ವಿಶೇಷಾಧಿಕಾರಿಯನ್ನು ಹಾಗೂ ಅಗತ್ಯ ಅಧಿಕಾರಿ/ಸಿಬ್ಬಂದಿ ಒದಗಿಸುವ ಸಲುವಾಗಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರ ಆದೇಶದಲ್ಲಿ ಸರ್ಕಾರವು ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ 2008-09ರ ಸಾಲಿನ ರಚಿಸಿ ಅದಕ್ಕೆ ಸಂಬಂಧಿಸಿದಂತೆ ರೂಪುರೇಷೆಗಳನ್ನು ಸಮಿತಿಯ ಧ್ಯೇಯೋದ್ದೇಶಗಳನ್ನು ತಿಳಿಸಿರುತ್ತಾರೆ. ಕೋಶದ ವೆಚ್ಚ ನಿರ್ವಹಣೆಗಾಗಿ ಅನುದಾನದ ಬಗ್ಗೆ ಕೂಲಂಕೂಷವಾಗಿ ಪರಿಶೀಲಿಸಿ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 67 ಕಸನಿ 2008, ಬೆಂಗಳೂರು, ದಿನಾಂಕ 18ನೆ ಡಿಸೆಂಬರ್ 2008

2008-09 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವ ಅನಿವಾಸಿ ಭಾರತೀಯ ಸಮಿತಿಗೆ ಅದರ ಉಪಾಧ್ಯಕ್ಷರ ಆಪ್ತಶಾಖೆಗೆ ಹಾಗೂ ಅವರ ಕಛೇರಿಯ ವೆಚ್ಚಗಳನ್ನು ನಿರ್ವಹಿಸಲು ಆಡಳಿತ ಇಲಾಖೆಯಾದ ಸಿಆಸುಇ (ರಾಜ್ಯ ಶಿಷ್ಠಾಚಾರ)ಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಲೆಕ್ಕಶೀರ್ಷಿಕೆ 2205-00-800-0-09-059 (ಇತರೆ ಖರ್ಚು) (ಯೋಜನೆ) ಅಡಿಯಲ್ಲಿ ಒದಗಿಸಿರುವ ರೂ.100.00 ಲಕ್ಷಗಳನ್ನು (ರೂಪಾಯಿ ನೂರು ಲಕ್ಷಗಳು) ಬಿಡುಗಡೆ ಮಾಡಲು ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ. ಆಇ 2141 ವೆಚ್ಚ: 5/2008 ದಿ. 07-11-2008 ರಲ್ಲಿ ನೀಡಿದ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ.

ಪಿ.ಆರ್. 144

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಕನ್ನಡ ಭವನ ಚಾಲುಕ್ಯ ವಿಭಾಗದ ಲಿಫ್ಟ್‌ನ ವಾರ್ಷಿಕ ನಿರ್ವಹಣಾ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1) ಮೆ॥ ಓ.ಟಿ.ಐ.ಎಸ್. ಎಲಿವೇಟರ್ ಕಂಪನಿಯ ಪತ್ರ ಸಂಖ್ಯೆ: ಎಲ್.3597 ದಿನಾಂಕ: 01.10.2008.

2) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅವರ ಪತ್ರ ಸಂಖ್ಯೆ: ಕಸನಿ:10:ನಯನ ಲಿಫ್ಟ್:2008-09 ದಿನಾಂಕ: 25.11.2008.

ಪ್ರಸ್ತಾವನೆ:

ಮೆ॥ ಓ.ಟಿ.ಐ.ಎಸ್. ಎಲಿವೇಟರ್, ಬೆಂಗಳೂರು ಇವರು ಮೇಲೆ (1)ರಲ್ಲಿ ಓದಲಾದ ದಿನಾಂಕ 01.10.2008ರ ಪತ್ರದಲ್ಲಿ ಕನ್ನಡ ಭವನದಲ್ಲಿ ಚಾಲುಕ್ಯ ವಿಭಾಗದಲ್ಲಿ ಅಳವಡಿಸಿರುವ ಲಿಫ್ಟ್‌ನ ದಿನಾಂಕ 01.10.2008 ರಿಂದ 30.09.2009 ರವರೆಗಿನ ವಾರ್ಷಿಕ ಲಿಫ್ಟ್ ನಿರ್ವಹಣೆಗೆ ರೂ. 50,716.00ಗಳು ಮತ್ತು ಅದರ ಮೇಲೆ ಶೇಕಡ 12.36% ರಷ್ಟು ಸೇವಾ ತೆರಿಗೆ (ರೂ. 6268.00) ಸೇರಿಸಿ ಒಟ್ಟು ರೂ. 56,984.00 ಭರಿಸಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರನ್ನು ಕೋರಿರುತ್ತಾರೆ. ಮೇಲೆ (2)ರಲ್ಲಿ ಓದಲಾದ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರ ದಿನಾಂಕ 25.11.2008ರ ಪತ್ರದಲ್ಲಿ ಅವರು ಸದರಿ ಮೊತ್ತವನ್ನು ಮೆ॥ ಓ.ಟಿ.ಐ.ಎಸ್. ಎಲಿವೇಟರ್ ಕಂಪನಿ, ಬೆಂಗಳೂರು ಇವರಿಗೆ ಪಾವತಿಸಬೇಕಾಗಿರುವುದರಿಂದ ಸರ್ಕಾರಿ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 155 ಕಸನಿ 2008, ಬೆಂಗಳೂರು, ದಿನಾಂಕ: 5ನೇ ಫೆಬ್ರವರಿ 2009

ಬೆಂಗಳೂರು ಜೆ.ಸಿ. ರಸ್ತೆಯಲ್ಲಿರುವ ಕನ್ನಡ ಭವನದ ಚಾಲುಕ್ಯ ವಿಭಾಗದಲ್ಲಿರುವ ಓ.ಟಿ.ಐ.ಎಸ್. ಎಲಿವೇಟರ್ ಲಿಫ್ಟ್‌ನ 2008-09ನೇ ಸಾಲಿನ ವಾರ್ಷಿಕ ಲಿಫ್ಟ್ ನಿರ್ವಹಣೆಗೆ (ಅಂದರೆ ದಿನಾಂಕ 01.10.2008 ರಿಂದ 30.09.2009 ರವರೆಗೆ) ವೆಚ್ಚವಾಗುವ ರೂ. 56,984.00 (ರೂಪಾಯಿ ಐವತ್ತಾರು ಸಾವಿರದ ಒಂಭೈನೂರ ಎಂಬತ್ತನಾಲ್ಕು ಮಾತ್ರ) ಗಳನ್ನು ಭರಿಸಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರಿಗೆ ಈ ಮೂಲಕ ಸರ್ಕಾರದ ಅನುಮತಿ ನೀಡಲಾಗಿದೆ. ಈ ಸಂಬಂಧ ತಗಲುವ ವೆಚ್ಚಗಳನ್ನು 2008-09ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 4202-04-800-1-01-139 (ಯೋಜನೆ) ಇದರಡಿ ನಯನ ರಂಗಮಂದಿರ ನಿರ್ವಹಣೆಗೆ ನಿಗಧಿಪಡಿಸಿರುವ ರೂ. 5.00 ಲಕ್ಷ ಅನುದಾನದ ಮೊತ್ತದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಇಡಿ 68 ಐಎಫ್ (ಬಿಎ) 2009, ದಿನಾಂಕ 16.01.2009ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.580

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಪ್ರೊಫೆಸರ್ ಎಂ.ಡಿ. ಕೃಷ್ಣರಾವ್ ಹಾಗೂ ಮತ್ತಿತರರು ಸಂಪಾದಿಸಿ ರಚಿಸಿರುವ ಗ್ಲಿಂಪ್ಸಸ್ ಆಫ್ ಕರ್ನಾಟಕ ಸಂಪುಟವನ್ನು ಪ್ರಕಟಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ 20.06.2008ರ ಸಭಾ ನಡುವಳಿ.

2) ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 10 ರಾಪಸ 2008, ದಿನಾಂಕ 08-12-2008.

3) ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಗ್ಯಾಇ:ಸಿ2: 2008-09, ದಿನಾಂಕ 17.01.2009.

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ 20.06.2008ರಂದು ನಡೆದ ಕಾರ್ಯದರ್ಶಿಗಳ ಸಭೆಯಲ್ಲಿ ಗ್ಯಾಸೆಟಿಯರ್ ಇಲಾಖೆಯಿಂದ 1960ರಲ್ಲಿ ಪ್ರೊ॥ ಎಂ.ಡಿ. ಕೃಷ್ಣರಾವ್ ಮತ್ತಿತರರು ಸಂಪಾದಿಸಿ ರಚಿಸಿರುವ ಗ್ಲಿಂಪ್ಸಸ್ ಆಫ್ ಕರ್ನಾಟಕ A Multicoloured Coffee Table Book ಸಂಪುಟವನ್ನು ಪ್ರಕಟಿಸಲು ತೀರ್ಮಾನಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ದಿ: 8-12-2008ರ ಸರ್ಕಾರದ ಆದೇಶದಲ್ಲಿ ಗ್ಯಾಸೆಟಿಯರ್ ಇಲಾಖೆಗೆ ರೂ.50.00 ಲಕ್ಷಗಳ ಅನುದಾನವನ್ನು ನೀಡಲಾಗಿದೆ.

ಮೇಲೆ (3) ರಲ್ಲಿ ಓದಲಾದ ಮುಖ್ಯಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ ಅವರ ದಿನಾಂಕ 17.01.2009ರ ಪತ್ರದಲ್ಲಿ 2008-09ನೇ ಸಾಲಿನಲ್ಲಿ ಸದರಿ ಕಾರ್ಯವನ್ನು ಶ್ರೀ ಎಸ್. ನಾಗರಾಜ್, ನಿವೃತ್ತ ಜಂಟಿ ನಿರ್ದೇಶಕರು, ಕೇಂದ್ರ ಪುರಾತತ್ವ ಇಲಾಖೆ ಇವರಿಗೆ ವಹಿಸಲು ತೀರ್ಮಾನಿಸಲಾಗಿದೆ ಎಂದು ವರದಿ ಮಾಡಿ, ಈ ಯೋಜನೆಗೆ 2008-09ನೇ ಸಾಲಿನ ಆಯವ್ಯಯದಲ್ಲಿ ರೂ.15.00 ಲಕ್ಷ ಒದಗಿಸಿಕೊಳ್ಳಲಾಗಿದ್ದು, ಸದರಿ ಮೊತ್ತವನ್ನು ಇಲಾಖೆಗೆ ಮೇಲೆ (2) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ನೀಡಲಾಗಿರುವ ರೂ.50.00 ಲಕ್ಷಗಳ ಅನುದಾನದಲ್ಲಿ ಭರಿಸಲಾಗುವುದೆಂದು ತಡಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮುಖ್ಯ ಸಂಪಾದಕರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 25 ಕರಾಗೆ 2008, ಬೆಂಗಳೂರು, ದಿನಾಂಕ: 10ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಗ್ಯಾಸೆಟಿಯರ್ ಇಲಾಖೆಯಿಂದ 1960ರಲ್ಲಿ ಪ್ರೊ॥ ಎಂ.ಡಿ. ಕೃಷ್ಣರಾವ್ ಮತ್ತಿತರರು ಸಂಪಾದಿಸಿ ರಚಿಸಿರುವ ಗ್ಲಿಂಪ್ಸಸ್ ಆಫ್ ಕರ್ನಾಟಕ A Multicoloured Coffee Table Book ಸಂಪುಟವನ್ನು ಪ್ರಕಟಿಸಲು ರೂ.15.00 ಲಕ್ಷಗಳನ್ನು (ರೂಪಾಯಿ ಹದಿನೈದು ಲಕ್ಷಗಳು ಮಾತ್ರ) ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ಇವರಿಗೆ ಈ ಕೆಳಕಂಡ ಷರತ್ತಿಗೆ ಒಳಪಟ್ಟು ಮಂಜೂರು ಮಾಡಿದೆ:

1) ಈ ಯೋಜನೆಗೆ ಕೆಟಿಟಿಪಿ ಕಾಯ್ದೆ 1999 ಹಾಗೂ ಅದರ ನಿಯಮಗಳು 2000ನ್ನು ಅನುಸರಿಸಿ ಕ್ರಮ ವಹಿಸುವುದು
2) ಬಿಡುಗಡೆ ಮಾಡಲಾದ ಹಣವನ್ನು ಉದ್ದೇಶಿತ ಕಾರ್ಯಕ್ರಮಕ್ಕೆ ಮಾತ್ರ ಬಳಸತಕ್ಕದ್ದು.
3) ಹಣ ಬಳಕೆ ಪ್ರಮಾಣಪತ್ರವನ್ನು ಸಲ್ಲಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು 2008-09ನೇ ಸಾಲಿನ ಲೆಕ್ಕಶೀರ್ಷಿಕೆ 3454-02-110-0-01 ಕರ್ನಾಟಕ ಗ್ಯಾಸೆಟಿಯರ್ ಪರಿಷ್ಕರಣೆ (ಯೋಜನೆ) ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಇಡಿ 1687 ಐಎಫ್(ಬಿಎ) 2008, ದಿನಾಂಕ 1.1.2009ರಲ್ಲಿ ಸಹಮತಿಯನ್ನು ಪಡೆದು ಹಾಗೂ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.623

ಎಂ.ಕೆ. ಭರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಸರ್ ಫ್ರಾನ್ಸಿಸ್ ಬುಕಾನೆನ್ ರಚಿಸಿರುವ ಎ ಜರ್ನಿ ತ್ರೂ ಮೈಸೂರ್ ಅಂಡ್ ಮಲಬಾರ್ ಸಂಪುಟವನ್ನು ಪುನರ್ ಮುದ್ರಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ 20.06.2008ರ ಸಭಾ ನಡುವಳಿ.
2) ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 10 ರಾಪಸ 2008, ದಿನಾಂಕ 08-12-2008.
3) ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಗ್ಯಾಇ:ಸಿ2: 2008-09 ದಿನಾಂಕ 17.01.2009.

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ 20.06.2008ರಂದು ನಡೆದ ಕಾರ್ಯ... ಸಭೆಯಲ್ಲಿ ಗ್ಯಾಸೆಟಿಯರ್ ಇಲಾಖೆಯಿಂದ ಸರ್ ಫ್ರಾನ್ಸಿಸ್ ಬುಕಾನೆನ್ ರಚಿಸಿರುವ ಎ ಜರ್ನಿ ತ್ರೂ ಮೈಸೂರು ಅಂಡ್ ಮಲಬಾರ್ ಸಂಪುಟವನ್ನು ಪುನರ್ ಮುದ್ರಿಸಲು ತೀರ್ಮಾನಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ದಿ: 8-12-2008ರ ಸರ್ಕಾರದ ಆದೇಶದಲ್ಲಿ ಗ್ಯಾಸೆಟಿಯರ್ ಇಲಾಖೆಗೆ ರೂ.50.00 ಲಕ್ಷಗಳ ಅನುದಾನವನ್ನು ನೀಡಲಾಗಿದೆ.

ಮೇಲೆ (3) ರಲ್ಲಿ ಓದಲಾದ ಮುಖ್ಯಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ ಅವರ ದಿನಾಂಕ 17.01.2009ರ ಪತ್ರದಲ್ಲಿ ಈ ಯೋಜನೆಗೆ 2008-09ನೇ ಸಾಲಿನ ಆಯವ್ಯಯದಲ್ಲಿ ರೂ.15.00 ಲಕ್ಷ ಒದಗಿಸಿಕೊಳ್ಳಲಾಗಿದ್ದು, ಸದರಿ ಮೊತ್ತವನ್ನು ಇಲಾಖೆಗೆ ಮೇಲೆ (2) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ನೀಡಲಾಗಿರುವ ರೂ.50.00 ಲಕ್ಷಗಳ ಅನುದಾನದಲ್ಲಿ ಭರಿಸಲಾಗುವುದೆಂದು ತಡೆಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮುಖ್ಯ ಸಂಪಾದಕರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 26 ಕರಾಗೆ 2008, ಬೆಂಗಳೂರು, ದಿನಾಂಕ: 7ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಗ್ಯಾಸೆಟಿಯರ್ ಇಲಾಖೆಯಿಂದ ಸರ್ ಫ್ರಾನ್ಸಿಸ್ ಬುಕಾನೆನ್ ರಚಿಸಿರುವ ಎ ಜರ್ನಿ ತ್ರೂ ಮೈಸೂರು ಅಂಡ್ ಮಲಬಾರ್ ಸಂಪುಟವನ್ನು ಪ್ರಕಟಿಸಲು ರೂ.15.00 ಲಕ್ಷಗಳನ್ನು (ರೂಪಾಯಿ ಹದಿನೈದು ಲಕ್ಷಗಳು ಮಾತ್ರ) ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ಇವರಿಗೆ ಈ ಕೆಳಕಂಡ ಷರತ್ತಿಗೆ ಒಳಪಟ್ಟು ಮಂಜೂರು ಮಾಡಿದೆ:

1) ಈ ಯೋಜನೆಗೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ ಕಾಯ್ದೆ 1999 ಮತ್ತು ಅದರ ನಿಯಮಗಳು 2000ನ್ನು ಅನುಸರಿಸಿ ಕ್ರಮ ವಹಿಸುವುದು.
2) ಬಿಡುಗಡೆ ಮಾಡಲಾದ ಹಣವನ್ನು ಉದ್ದೇಶಿತ ಕಾರ್ಯಕ್ರಮಕ್ಕೆ ಮಾತ್ರ ಬಳಸತಕ್ಕದ್ದು.
3) ಹಣ ಬಳಕೆ ಪ್ರಮಾಣಪತ್ರವನ್ನು ಸಲ್ಲಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು 2008-09ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 3454-02-110-0-01 ಕರ್ನಾಟಕ ಗ್ಯಾಸೆಟಿಯರ್‌ಗಳ ಪರಿಷ್ಕರಣೆ (ಯೋಜನೆ) ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಇಡಿ 1687 ಐಎಫ್(ಜಿಎ) 2008 ದಿನಾಂಕ 1.1.2009 ರಲ್ಲಿ ಸಹಮತಿಯನ್ನು ಪಡೆದು ಹಾಗೂ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.622

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: "ಜೂವೆಲ್ಸ್ ಆಫ್ ಅಡ್ಮಿನಿಸ್ಟ್ರೇಷನ್" ಗ್ರಂಥವನ್ನು ಎರಡು ಸಂಪುಟಗಳಲ್ಲಿ ರಚಿಸಿ ಪ್ರಕಟಿಸುವ ಬಗ್ಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ 20.06.2008ರ ಸಭಾ ನಡುವಳಿ.
2) ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 10 ರಾಪಸ 2008, ದಿನಾಂಕ 08-12-2008.
3) ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಗ್ಯಾಇ:ಸಿ2: 2008-09 ದಿನಾಂಕ 17.01.2009.

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ 20.06.2008ರಂದು ನಡೆದ ಕಾರ್ಯದರ್ಶಿಗಳ ಸಭೆಯಲ್ಲಿ ಗ್ಯಾಸೆಟಿಯರ್ ಇಲಾಖೆಯಿಂದ "ಜೂವೆಲ್ಸ್ ಆಫ್ ಅಡ್ಮಿನಿಸ್ಟ್ರೇಷನ್" ಗ್ರಂಥವನ್ನು ಎರಡು ಸಂಪುಟಗಳಲ್ಲಿ ರಚಿಸಿ ಪ್ರಕಟಿಸುವ ಬಗ್ಗೆ ತೀರ್ಮಾನಿಸಲಾಯಿತು.

ಮೇಲೆ (2)ರಲ್ಲಿ ಓದಲಾದ ದಿ: 8-12-2008ರ ಸರ್ಕಾರದ ಆದೇಶದಲ್ಲಿ ಗ್ಯಾಸೆಟಿಯರ್ ಇಲಾಖೆಗೆ ರೂ.50.00 ಲಕ್ಷಗಳ ಅನುದಾನವನ್ನು ನೀಡಲಾಗಿದೆ.

ಮೇಲೆ (3) ರಲ್ಲಿ ಓದಲಾದ ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ ಅವರ ದಿನಾಂಕ 17.01.2009ರ ಪತ್ರದಲ್ಲಿ 2008-09ನೇ ಸಾಲಿನಲ್ಲಿ ಸದರಿ ಕಾರ್ಯವನ್ನು ಶ್ರೀ ಡಾ. ಸೂರ್ಯನಾಥ. ಯು. ಕಾಮತ್, ರವರಿಂದ ರಚಿಸಿ ಪ್ರಕಟಿಸಲು ತೀರ್ಮಾನಿಸಲಾಗಿದೆ ಎಂದು ವರದಿ ಮಾಡಿ, ಈ ಯೋಜನೆಗೆ 2008-09ನೇ ಸಾಲಿನ ಆಯವ್ಯಯದಲ್ಲಿ ರೂ.20.00 ಲಕ್ಷ ಒದಗಿಸಿಕೊಳ್ಳಲಾಗಿದ್ದು, ಸದರಿ ಮೊತ್ತವನ್ನು ಇಲಾಖೆಗೆ ಮೇಲೆ (2) ರಲ್ಲಿ ಓದಲಾದ

ರ್ಕಾರಿ ಆದೇಶದಲ್ಲಿ ನೀಡಲಾಗಿರುವ ರೂ.50.00 ಲಕ್ಷಗಳ ಅನುದಾನದಲ್ಲಿ ಭರಿಸಲಾಗುವುದೆಂದು ತಡೆಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮುಖ್ಯ ಸಂಪಾದಕರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 27 ಕರಾಗೆ 2008, ಬೆಂಗಳೂರು, ದಿನಾಂಕ: 9ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಗ್ಯಾಸೆಟಿಯರ್ ಇಲಾಖೆಯಿಂದ "ಜೂವೆಲ್ಸ್ ಆಫ್ ಅಡ್ಮಿನಿಸ್ಟ್ರೇಷನ್" ಗ್ರಂಥವನ್ನು ಎರಡು ಸಂಪುಟಗಳಲ್ಲಿ ರಚಿಸಿ ಪ್ರಕಟಿಸಲು ರೂ.20.00 ಲಕ್ಷಗಳನ್ನು (ರೂಪಾಯಿ ಇಪ್ಪತ್ತು ಲಕ್ಷಗಳು ಮಾತ್ರ) ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ಇವರಿಗೆ ಈ ಕೆಳಕಂಡ ಷರತ್ತಿಗೆ ಒಳಪಟ್ಟು ಮಂಜೂರು ಮಾಡಿದೆ:

1) ಈ ಯೋಜನೆಗೆ ಕೆಟಿಪಿಪಿ ಕಾಯ್ದೆ 1999 ಹಾಗೂ ಅದರ ನಿಯಮಗಳು 2000ನ್ನು ಅನುಸರಿಸಿ ಕ್ರಮ ಕೈಗೊಳ್ಳುವುದು.
2) ಬಿಡುಗಡೆ ಮಾಡಲಾದ ಹಣವನ್ನು ಉದ್ದೇಶಿತ ಕಾರ್ಯಕ್ರಮಕ್ಕೆ ಮಾತ್ರ ಬಳಸತಕ್ಕದ್ದು.
3) ಹಣ ಬಳಕೆ ಪ್ರಮಾಣಪತ್ರವನ್ನು ಸಲ್ಲಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು 2008-09ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 3454-02-110-0-01 ಕರ್ನಾಟಕ ಗ್ಯಾಸೆಟಿಯರ್‌ಗಳ ಪರಿಷ್ಕರಣೆ (ಯೋಜನೆ) ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಇಡಿ 1687 ಐಎಫ್(ಬಿಎ) 2008 ದಿನಾಂಕ .1.2009 ರಲ್ಲಿ ಸಹಮತಿಯನ್ನು ಪಡೆದು ಹಾಗೂ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.621

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಶ್ರೀ ವಿಜಯಕುಮಾರ್. ಎಂ. ಚನ್ನವೀರಗೌಡ ಬೆಂಗಳೂರು, ಇವರನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಆಪ್ತಶಾಖೆಯಲ್ಲಿ ವಾಹನ ಚಾಲಕರ ಹುದ್ದೆಗೆ ನೇಮಕ ಮಾಡುವ ಬಗ್ಗೆ.

ಓದಲಾಗಿದೆ: ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅವರ ಟಿಪ್ಪಣಿ ಸಂಖ್ಯೆ: ಕಅಪ್ರಾ/ಅ-143/ 2008-09 ದಿನಾಂಕ 04.11.2008

ಪ್ರಸ್ತಾವನೆ:

ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅವರು ಮೇಲೆ ಓದಲಾದ ದಿನಾಂಕ 04.11.2008ರ ಟಿಪ್ಪಣಿಯಲ್ಲಿ ಅವರ ಆಪ್ತಶಾಖೆಗೆ ಶ್ರೀ ಆರ್. ಪಂಚಾಕ್ಷರಿ, ವಾಹನ ಚಾಲಕರು, ಇವರ ಸೇವೆಯನ್ನು ದಿನಾಂಕ 31-10-2008ಕ್ಕೆ ಅಂತ್ಯಗೊಳಿಸಿ ೀ ವಿಜಯಕುಮಾರ್, ಬೆಂಗಳೂರು, ಇವರನ್ನು ವಾಹನ ಚಾಲಕರನ್ನಾಗಿ ನೇಮಕಾತಿ ಮಾಡುವಂತೆ ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 49 ಕೆಎಲ್ 2008, ಬೆಂಗಳೂರು, ದಿನಾಂಕ: 22ನೇ ಜನವರಿ 2009

ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ರವರ ಆಪ್ತಶಾಖೆಗೆ ಶ್ರೀ ವಿಜಯಕುಮಾರ್, ಎಂ. ಚನ್ನವೀರಗೌಡ, ೦. 93, ನಮ್ಮನೆ ಸುಮ್ಮನೆ, 3ನೇ ಅಡ್ಡರಸ್ತೆ, 4 ಹಂತ, ಜೆ ಪಿ ನಗರ, ಬೆಂಗಳೂರು-560093, ಇವರನ್ನು ದಿನಾಂಕ -11-2008 ರಿಂದ ಜಾರಿಗೆ ಬರುವಂತೆ ಈ ಆದೇಶದೊಡನೆ ಲಗತ್ತಿಸಿರುವ ಷರತ್ತು ಮತ್ತು ನಿಬಂಧನೆಗೆ ಒಳಪಟ್ಟಂತೆ ಗುತ್ತಿಗೆ ಧಾರದ ಮೇಲೆ ನೇಮಿಸಿಕೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

. ಆದೇಶವನ್ನು, ಆರ್ಥಿಕ ಇಲಾಖೆಯ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಆಇ 2567 ವೆಚ್ಚ-7/2008 ದಿನಾಂಕ 3-12-2008ರಲ್ಲಿ ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ರುಕ್ಮಿಣಿ ದಿವಾಕರ್

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ) (ಪ್ರ)

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 49 ಕೆಬಿಎಲ್ 2008 ದಿನಾಂಕ: 22.01.2009

ಗುತ್ತಿಗೆ ನೇಮಕಾತಿಯ ಬಗ್ಗೆ ಷರತ್ತು ಮತ್ತು ನಿಬಂಧನೆಗಳು

1. ಶ್ರೀ ವಿಜಯಕುಮಾರ್, ವಾಹನ ಚಾಲಕ ರವರ ಗುತ್ತಿಗೆ ನೇಮಕಾತಿಯ ಅವಧಿಯು ದಿನಾಂಕ 01.11.2008 ರಿಂದ ಜಾರಿಗೆ ಬರುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪದಾವಧಿಯವರೆಗೆ ಅಥವಾ ಮುಂದಿನ ಹೊರಡಿಸುವವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇದ್ದು, ಇದೊಂದು ತಾತ್ಕಾಲಿಕ ನೇಮಕಾತಿ ಆಗಿರುತ್ತದೆ.
2. ಇವರ ಗುತ್ತಿಗೆ ನೇಮಕಾತಿಗೆ ಮಾಸಿಕ ರೂ. 5160/- (ಐದು ಸಾವಿರದ ಒಂದುನೂರ ಅರವತ್ತು ರೂಪಾಯಿಗಳು ಮಾತ್ರ) ಗಳ ಸಂಚಿತ ವೇತನವನ್ನು ನಿಗದಿಪಡಿಸಲಾಗಿದೆ. ಇದಲ್ಲದೆ, ಇನ್ನಿತರ ಯಾವುದೇ ಭತ್ಯೆಗಳಿಗೂ ಇವರು ಅರ್ಹರಾಗಿರುವುದಿಲ್ಲ.
3. ಸದರಿ ಗುತ್ತಿಗೆ ನೌಕರನು ಸಾರ್ವಜನಿಕ ಹಿತದೃಷ್ಟಿಯಿಂದ ಪ್ರಯಾಣ ಮಾಡಲೇಬೇಕಾದಲ್ಲಿ ಮಾತ್ರ ಅವರು ನೇಮಕಾತಿ ಹೊಂದಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಟ ವೇತನದ ಮೇಲೆ ನಿಯಮಾನುಸಾರ ಲಭ್ಯವಿರುವ ಪ್ರಯಾಣಭತ್ಯೆ ಮತ್ತು ದಿನಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.
4. ಸದರಿ ಗುತ್ತಿಗೆ ನೌಕರರುಗಳು ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆಯನ್ನು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ.
5. ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೇ ವೈದ್ಯಕೀಯ ಕಾರಣಗಳ ಮೇರೆಗಾಗಲೀ ಅಥವಾ ಬೇರೆ ಕಾರಣಗಳಿಂದಾಗಲೀ ಅನಧಿಕೃತ ಗೈರು ಹಾಜರಿಯಾದಲ್ಲಿ ಗುತ್ತಿಗೆ ಆಧಾರದ ನೇಮಕಾತಿಯು ತಾನಾಗಿಯೇ ರದ್ದಾಗುತ್ತದೆ.
6. ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆದು, ವೈದ್ಯಕೀಯ ಕಾರಣಗಳ ಮೇರೆಗೆ ಅಥವಾ ಸಮರ್ಥನೀಯ ಕಾರಣಗಳ ಮೇರೆಗೆ ಗುತ್ತಿಗೆ ಆಧಾರದ ಅವಧಿಯಲ್ಲಿ ಮೂರು ತಿಂಗಳಿಗೆ ಮೀರದಂತೆ, ಗೈರುಹಾಜರಾದಲ್ಲಿ ಆ ಕಾರಣದಿಂದ ಗುತ್ತಿಗೆ ನೇಮಕಾತಿ ರದ್ದಾಗುವುದಿಲ್ಲ. ಆದರೆ ಈ ಅವಧಿಯನ್ನು ಕರ್ತವ್ಯ ರಹಿತ ದಿನಗಳೆಂದು (ಡೈಸ್-ನಾನ್) ಪರಿಗಣಿಸಲಾಗುವುದು ಮತ್ತು ಅವರು ಈ ಅವಧಿಗೆ ಯಾವುದೇ ವೇತನ ಮತ್ತು ಇತರೆ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ.
7. ಒಪ್ಪಂದದ ಷರತ್ತು ಮತ್ತು ನಿಬಂಧನೆಗಳಿಗೆ ನೀಡಿರುವ ಸೌಲಭ್ಯಗಳ ಹೊರತಾಗಿ ಬೇರಾವುದೇ ಸೌಲಭ್ಯಕ್ಕೆ ಅಂದರೆ, ವೇತನ ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.
8. ಸದರಿ ನೌಕರರ ದುರ್ವರ್ತನೆ, ನಿರ್ಲಕ್ಷತೆಯ ನಿಮಿತ್ತ ಸರ್ಕಾರಕ್ಕೆ ಸಂಬಂಧಿಸಬಹುದಾದ ಎಲ್ಲಾ ನಷ್ಟಗಳನ್ನು ಸರ್ಕಾರಕ್ಕೆ ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.
9. ಸದರಿ ಗುತ್ತಿಗೆ ನೇಮಕಾತಿಯನ್ನು ಯಾವುದೇ ಕಾರಣಕ್ಕೂ ಖಾಯಂ ಎಂದು ಪರಿಗಣಿಸುವುದಿಲ್ಲ.
10. ಅವರ ಕರ್ತವ್ಯ ಕಾರ್ಯ ಮತ್ತು ಪ್ರಕಾರ್ಯಗಳನ್ನು ಶ್ರದ್ಧೆ, ಭಕ್ತಿ ಮತ್ತು ಆಸಕ್ತಿಗಳಿಂದ ನೆರವೇರಿಸುವುದು.
11. ಅವರ ಕರ್ತವ್ಯವನ್ನು ಪಾಲಿಸುತ್ತಿರುವಾಗ ಅಥವಾ ನೆರವೇರಿಸುತ್ತಿರುವಾಗ ಅವರಿಗೆ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಅಧಿಕೃತ ಮಾಹಿತಿಯನ್ನು ಗೌಪ್ಯವಾಗಿಟ್ಟು ಕಟ್ಟುನಿಟ್ಟಾಗಿ ಪಾಲಿಸಬೇಕು.
12. 1966ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಅವರು ಬದ್ಧರಾಗಿರುತ್ತಾರೆ.
13. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.
14. ಅವರ ದುರ್ನಡತೆಯಿಂದಾಗಲೀ ಅಥವಾ ನಿರ್ಲಕ್ಷತೆ, ಉದಾಸೀನತೆಯಿಂದಾಗಲೀ ಮತ್ತು ಸರ್ಕಾರಕ್ಕೆ ಸಂಬಂಧಿಸಿದಂತೆ ಆರ್ಥಿಕ ನಷ್ಟವನ್ನು ಅವರು ಸರ್ಕಾರಕ್ಕೆ ತುಂಬಿಕೊಡಲು ಹೊಣೆಯಾಗಿರುತ್ತಾರೆ.
15. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು ರೂಪಾಯಿಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರಿಂದ ಬರೆಯಿಸಿಕೊಳ್ಳತಕ್ಕದ್ದು.

ರುಕ್ಮಿಣಿ ದಿವಾಕರ್

ಪಿ.ಆರ್.406

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ) (ಪ್ರ)

ತಿದ್ದೋಲೆ

ಸಂಖ್ಯೆ: ಕಸಂವಾಪ್ರ 24 ಕೆಬಿಎಲ್ 2008, ಬೆಂಗಳೂರು, ದಿನಾಂಕ: 12ನೇ ಡಿಸೆಂಬರ್ 2008.

ಶ್ರೀಮತಿ ಶ್ರೀವಿದ್ಯಾ, ಶೀಘ್ರಲಿಪಿಗಾರರ ಗುತ್ತಿಗೆ ಆಧಾರದ ನೇಮಕಾತಿಗೆ ಸಂಬಂಧಿಸಿದ ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 24 ಕೆಬಿಎಲ್ 2008 ದಿನಾಂಕ 17.09.2008ರ ಆದೇಶ ಭಾಗದಲ್ಲಿ "ತಕ್ಷಣದಿಂದ ಜಾರಿಗೆ ಬರುವಂತೆ" ಎಂಬುದರ ಬದಲಾಗಿ "ದಿನಾಂಕ 19.06.2008ರಿಂದ ಜಾರಿಗೆ ಬರುವಂತೆ" ಎಂದು ಹಾಗೂ ಸರ್ಕಾರದ ಪತ್ರ ಸಂಖ್ಯೆ: ಕಸಂವಾಪ್ರ 24 ಕೆಬಿಎಲ್ 2008 ದಿನಾಂಕ 25.11.2008ರ ಜೊತೆಗೆ ಲಗತ್ತಿಸಿರುವ ಇವರ ಸೇವಾ ಷರತ್ತುಗಳಲ್ಲಿ ನೇಮಕಾತಿ ದಿನಾಂಕವನ್ನು 17.09.2008ರ ಬದಲಿಗೆ '19.06.2008' ಎಂದು ಮತ್ತು ಗುತ್ತಿಗೆ ನೇಮಕಾತಿ ಮಾಸಿಕ ರೂ.5065/-ರ ಬದಲಿಗೆ 'ರೂ.6565/-' ಎಂದು ತಿದ್ದುಪಡಿ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಕೆ. ಧರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 24 ಕೆಬಿಎಲ್ 2008, ದಿನಾಂಕ: 12-12-2008

ಗುತ್ತಿಗೆ ನೇಮಕಾತಿಯ ಬಗ್ಗೆ ಷರತ್ತು ಮತ್ತು ನಿಬಂಧನೆಗಳು

1. ಶ್ರೀಮತಿ ಶ್ರೀವಿದ್ಯಾ, ಶೀಘ್ರಲಿಪಿಗಾರರು ರವರ ಗುತ್ತಿಗೆ ನೇಮಕಾತಿಯ ಅವಧಿಯು ದಿನಾಂಕ 19.06.2008 ರಿಂದ ಜಾರಿಗೆ ಬರುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪದಾವಧಿ ಮುಗಿಯುವವರೆಗೆ ಅಥವಾ ಮುಂದಿನ ಆದೇಶ ಹೊರಡಿಸುವವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇದ್ದು, ಇದೊಂದು ತಾತ್ಕಾಲಿಕ ನೇಮಕಾತಿ ಆಗಿರುತ್ತದೆ.
2. ಇವರ ಗುತ್ತಿಗೆ ನೇಮಕಾತಿಗೆ ಮಾಸಿಕ ರೂ.6565/-(ಆರು ಸಾವಿರದ ಐನೂರ ಅರ್ವತ್ತೈಯ್ದು ರೂಪಾಯಿಗಳು ಮಾತ್ರ)ಗಳ ಸಂಚಿತ ವೇತನವನ್ನು ನಿಗದಿಪಡಿಸಲಾಗಿದೆ. ಇದಲ್ಲದೆ, ಇನ್ನಿತರ ಯಾವುದೇ ಭತ್ಯೆಗಳಿಗೂ ಇವರು ಅರ್ಹರಾಗಿರುವುದಿಲ್ಲ.
3. ಸದರಿ ಗುತ್ತಿಗೆ ನೌಕರನು ಸಾರ್ವಜನಿಕ ಹಿತದೃಷ್ಟಿಯಿಂದ ಪ್ರಯಾಣ ಮಾಡಲೇಬೇಕಾದಲ್ಲಿ ಮಾತ್ರ ಅವರು ನೇಮಕಾತಿ ಹೊಂದಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ ನಿಯಮಾನುಸಾರ ಲಭ್ಯವಿರುವ ಪ್ರಯಾಣಭತ್ಯೆ ಮತ್ತು ದಿನಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.
4. ಸದರಿ ಗುತ್ತಿಗೆ ನೌಕರರುಗಳು ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆಯನ್ನು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ.
5. ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೇ ವೈದ್ಯಕೀಯ ಕಾರಣಗಳ ಮೇರೆಗಾಗಲೀ ಅಥವಾ ಬೇರೆ ಕಾರಣಗಳಿಂದಾಗಲೀ ಅನಧಿಕೃತ ಗೈರು ಹಾಜರಿಯಾದಲ್ಲಿ ಗುತ್ತಿಗೆ ಆಧಾರದ ನೇಮಕಾತಿಯು ತಾನಾಗಿಯೇ ರದ್ದಾಗುತ್ತದೆ.
6. ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆದು, ವೈದ್ಯಕೀಯ ಕಾರಣಗಳ ಮೇರೆಗೆ ಅಥವಾ ಸಮರ್ಥನೀಯ ಕಾರಣಗಳ ಮೇರೆಗೆ ಗುತ್ತಿಗೆ ಆಧಾರದ ಅವಧಿಯಲ್ಲಿ ಮೂರು ತಿಂಗಳಿಗೆ ಮೀರದಂತೆ, ಗೈರುಹಾಜರಾದಲ್ಲಿ ಆ ಕಾರಣದಿಂದ ಗುತ್ತಿಗೆ ನೇಮಕಾತಿ ರದ್ದಾಗುವುದಿಲ್ಲ. ಆದರೆ ಈ ಅವಧಿಯನ್ನು ಕರ್ತವ್ಯ ರಹಿತ ದಿನಗಳೆಂದು (ಡೈಸ್-ನಾನ್) ಪರಿಗಣಿಸಲಾಗುವುದು ಮತ್ತು ಅವರು ಈ ಅವಧಿಗೆ ಯಾವುದೇ ವೇತನ ಮತ್ತು ಇತರೆ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ.
7. ಒಪ್ಪಂದದ ಷರತ್ತು ಮತ್ತು ನಿಬಂಧನೆಗಳಿಗೆ ನೀಡಿರುವ ಸೌಲಭ್ಯಗಳ ಹೊರತಾಗಿ ಬೇರಾವುದೇ ಸೌಲಭ್ಯಕ್ಕೆ ಅಂದರೆ, ವೇತನ ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.
8. ಸದರಿ ನೌಕರರ ದುರ್ವರ್ತನೆ, ನಿರ್ಲಕ್ಷತೆಯ ನಿಮಿತ್ತ ಸರ್ಕಾರಕ್ಕೆ ಸಂಬಂಧಿಸಬಹುದಾದ ಎಲ್ಲಾ ನಷ್ಟಗಳನ್ನು ಸರ್ಕಾರಕ್ಕೆ ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.
9. ಸದರಿ ಗುತ್ತಿಗೆ ನೇಮಕಾತಿಯನ್ನು ಯಾವುದೇ ಕಾರಣಕ್ಕೂ ಖಾಯಂ ಎಂದು ಪರಿಗಣಿಸುವುದಿಲ್ಲ.
10. ಅವರ ಕರ್ತವ್ಯ ಕಾರ್ಯ ಮತ್ತು ಪ್ರಕಾರ್ಯಗಳನ್ನು ಶ್ರದ್ಧೆ, ಭಕ್ತಿ ಮತ್ತು ಆಸಕ್ತಿಗಳಿಂದ ನೆರವೇರಿಸುವುದು.

11. ಅವರ ಕರ್ತವ್ಯವನ್ನು ಪಾಲಿಸುತ್ತಿರುವಾಗ ಅಥವಾ ನೆರವೇರಿಸುತ್ತಿರುವಾಗ ಅವರಿಗೆ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಅಧಿಕೃತ ಮಾಹಿತಿಯನ್ನು ಗೌಪ್ಯವಾಗಿಟ್ಟು ಕಟ್ಟುನಿಟ್ಟಾಗಿ ಪಾಲಿಸಬೇಕು.
12. 1966ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಅವರು ಬದ್ಧರಾಗಿರುತ್ತಾರೆ.
13. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.
14. ಅವರ ದುರ್ನಡತೆಯಿಂದಾಗಲೀ ಅಥವಾ ನಿರ್ಲಕ್ಷತೆ, ಉದಾಸೀನತೆಯಿಂದಾಗಲೀ ಮತ್ತು ಸರ್ಕಾರಕ್ಕೆ ಸಂಬಂಧಿಸಿದಂತೆ ಆರ್ಥಿಕ ನಷ್ಟವನ್ನು ಅವರು ಸರ್ಕಾರಕ್ಕೆ ತುಂಬುಕೊಡಲು ಹೊಣೆಯಾಗಿರುತ್ತಾರೆ.
15. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು ರೂಪಾಯಿಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರಿಂದ ಬರೆಯಿಸಿಕೊಳ್ಳತಕ್ಕದ್ದು.

ಎಂ.ಕೆ. ಧರ್ಮರಾಜಪ್ಪ

ಪಿ.ಆರ್.148

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಗೆ ಉಪನಿರ್ದೇಶಕರ ಉಪಯೋಗಕ್ಕಾಗಿ ಬಾಹ್ಯ ಮೂಲದಿಂದ ವಾಹನ ಸೌಲಭ್ಯ ಪಡೆಯುವ ಬಗ್ಗೆ

ಓದಲಾಗಿದೆ: 1) ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಪ್ರಾ:ಸಂಪ:ಉನಿ:ವಾಹನ: 2006-07 ದಿನಾಂಕ:27-10-2006 ಮತ್ತು ಪತ್ರ ಸಂಖ್ಯೆ: ಅಪ್ರಾಸಂಪ:ಉನಿ:ವಾಹನ:2006-07/175 ದಿನಾಂಕ 23-06-2008.

2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 16-07-2005ರಂದು ನಡೆದ ಸಭೆಯ ನಡೆವಳಿಗಳು.

ಪ್ರಸ್ತಾವನೆ:

ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಬೆಂಗಳೂರು ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಮೈಸೂರಿನ ಉಪನಿರ್ದೇಶಕರ ಕಛೇರಿಗೆ ಒಂದು ವಾಹನವನ್ನು ಖರೀದಿಸಲು ಪ್ರಸ್ತಾಪಿಸಿರುವರು. ದಿನಾಂಕ 16-07-2005ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡೆವಳಿಗಳನ್ನು ಉಲ್ಲೇಖಿಸಿ ವಾಹನ ಮತ್ತು ವಾಹನ ಚಾಲಕರನ್ನು ಬಾಹ್ಯ ಮೂಲದಿಂದ (out source) ಪಡೆಯಲು ಸೂಚಿಸಲಾಗಿದೆಯೆಂದು ತಿಳಿಸಿರುವರು. ಅದರಂತೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 278 ಶಿವಾನಿ 2000 ದಿನಾಂಕ 18-03-2006ರಲ್ಲಿ ಸರ್ಕಾರಿ ಇಲಾಖೆಗಳು ಹೊಸ ವಾಹನವನ್ನು ಖರೀದಿಸುವುದನ್ನು ನಿಷೇಧಿಸಿ ಬದಲಿಗೆ ಅಧಿಕೃತ ಕೆಲಸ ಕಾರ್ಯಗಳಿಗಾಗಿ ಆರ್ಥಿಕ ಇಲಾಖೆಯ ಪೂರ್ವಾನುಮತಿಯನ್ನು ಪಡೆದು ಬಾಡಿಗೆ ಆಧಾರದ ಮೇಲೆ ವಾಹವನನ್ನು ಪಡೆಯಲು ಮಂಜೂರಾತಿ ನೀಡಲಾಗಿದೆ. ಅದರಂತೆ ಮೈಸೂರು ಶ್ರೀರಂಗಪಟ್ಟಣ ಮುಂತಾದ ಪರಂಪರೆ ಪ್ರದೇಶಗಳಲ್ಲಿ ಸಂರಕ್ಷಣೆ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಸಕ್ರಿಯವಾಗಿ ಕೈಗೊಳ್ಳಲು ಒಂದು ವಾಹನವನ್ನು ಉಪನಿರ್ದೇಶಕರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ಇವರಿಗೆ ಪಡೆಯಲು ಉದ್ದೇಶಿಸಲಾಗಿದೆಯೆಂದು ತಿಳಿಸಿರುವರು. ಸದರಿ ವೆಚ್ಚವನ್ನು ಲೆಕ್ಕಶೀರ್ಷಿಕೆ 2205-00-103-0-21(ಯೋಜನೆ)051-ಸಾಮಾನ್ಯ ವೆಚ್ಚಗಳ ಅಡಿಯಲ್ಲಿ ಭರಿಸಲು ಸಹ ಪ್ರಸ್ತಾಪಿಸಿರುವರು.

ಮುಂದುವರಿದು, ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ರವರ ಕಛೇರಿಯನ್ನು ಸರ್ಕಾರದ ಆದೇಶ ಸಂಖ್ಯೆ: ಸಂಕಇ 43 ಕೆಎಂಯು 2005 ದಿನಾಂಕ 30-05-2005ರಲ್ಲಿ ಮೈಸೂರಿನಿಂದ ಬೆಂಗಳೂರಿಗೆ ಸ್ಥಳಾಂತರಿಸಿದ ಹಿನ್ನೆಲೆಯಲ್ಲಿ ಉಪನಿರ್ದೇಶಕರ ಕಛೇರಿಯನ್ನು ಮೈಸೂರಿನಲ್ಲಿಯೇ ಮುಂದುವರಿಸಲಾಗಿದೆ ಹಾಗೂ ಸದರಿಯವರಿಗೆ ವಾಹನದ ಅವಶ್ಯಕತೆ ಇರುವುದಾಗಿ ತಿಳಿಸಿರುವರು. ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 162 ಕೆಎಂಯು 2008, ಬೆಂಗಳೂರು, ದಿನಾಂಕ: 6ನೇ ಜನವರಿ 2009

ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಬೆಂಗಳೂರು ಇವರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನಿರ್ದೇಶಕರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು

ಇವರಿಗೆ ಕಛೇರಿಯ ಉಪಯೋಗಕ್ಕಾಗಿ ವಾಹನ ಮತ್ತು ವಾಹನ ಚಾಲಕರನ್ನು ಬಾಹ್ಯ ಮೂಲದಿಂದ (out source) ಪಡೆಯಲು ಮತ್ತು ಈಗಾಗಲೇ ಹಿಂದಿನ ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಇವರ ಅನುಮತಿಯೊಂದಿಗೆ ವಾಹನ ಸೌಲಭ್ಯವನ್ನು ಪಡೆದಿರುವುದಕ್ಕೆ ಸರ್ಕಾರದ ಘಟನೋತ್ತರ ಅನುಮೋದನೆಯನ್ನು ನೀಡಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 1696 ವೆಚ್ಚ-5/2008 ದಿನಾಂಕ 6-11-2008ರಲ್ಲಿ ಅನುಮತಿ ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.293

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,

ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ರಾಯಚೂರು ಜಿಲ್ಲೆ ರಾಯಚೂರು ತಾಲ್ಲೂಕು, ಯರಗೇರಾ ಹೋಬಳಿ ಮಿರ್ಜಾಪುರ ಗ್ರಾಮದಲ್ಲಿ ದೊರೆತಿರುವ 306 ಬೆಳ್ಳಿ ನಾಣ್ಯಗಳಿಗೆ ಹಣ ಪಾವತಿಸಿ ಇಲಾಖೆಯ ವಶದಲ್ಲಿಟ್ಟುಕೊಳ್ಳಲು ಮಂಜೂರಾತಿ ನೀಡುವ ಕುರಿತು.

ಓದಲಾಗಿದೆ:

1) ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರ ದಿನಾಂಕ 09-05-2008ರ ಪ್ರಸ್ತಾವನೆ ಸಂಖ್ಯೆ: ಡಿಎಎಂ: ಟಿಆರ್‌ಟಿ: ಸ:ನಿ: 2008-09 ಮತ್ತು 27-09-2008ರ ಪತ್ರ.
2) ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ ಇವರ ದಿ: 04-08-2008ರ ಪತ್ರ ಸಂಖ್ಯೆ:ಕಂ:ಎಂಎಜಿ: 2:1:2003-04 ಮತ್ತು 24-09-2008ರ ಪತ್ರ.

ಪ್ರಸ್ತಾವನೆ:

ಮೇಲೆ ಓದಲಾದ (1)ರಲ್ಲಿ ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರು ಸರ್ಕಾರಕ್ಕೆ ಪತ್ರ ಬರೆದು 1992-93ನೇ ಸಾಲಿನಲ್ಲಿ ಜಿಲ್ಲಾಧಿಕಾರಿ, ರಾಯಚೂರು ಇವರು ರಾಯಚೂರು ತಾಲ್ಲೂಕು ಯರಗೇರಾ ಹೋಬಳಿ ಮಿರ್ಜಾಪುರ ಎಂಬ ಗ್ರಾಮದಲ್ಲಿ ಲಭ್ಯವಾದ 306 (ಮುನ್ನೂರ ಆರು) ಬೆಳ್ಳಿ ನಾಣ್ಯಗಳನ್ನು ಸರ್ಕಾರದ ಪರವಾಗಿ ವಹಿಸಿಕೊಳ್ಳುವ ಸಲುವಾಗಿ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ನಿರ್ದೇಶನಾಲಯದೊಡನೆ ಪತ್ರ ವ್ಯವಹಾರ ಮಾಡಿರುವರೆಂದು ತಿಳಿಸಿರುವರು. ಈ ಬೆಳ್ಳಿ ನಾಣ್ಯಗಳು ಬ್ರಿಟೀಷ್ ಈಸ್ಟ್ ಇಂಡಿಯಾ ಕಂಪನಿಯ ಆಡಳಿತದ ಕಾಲದಲ್ಲಿ ಚಲಾವಣೆಯಲ್ಲಿದ್ದ ಒಂದು ರೂಪಾಯಿ ಬೆಳ್ಳಿ ನಾಣ್ಯಗಳಾಗಿದ್ದು ಐತಿಹಾಸಿಕ ಮಹತ್ವ ಹೊಂದಿರುತ್ತವೆ. ಅವುಗಳನ್ನು ಜಿಲ್ಲಾಧಿಕಾರಿಗಳಿಂದ ಪಡೆದು ಇಲಾಖೆಯ ಭದ್ರತಾ ಕೊಠಡಿಯಲ್ಲಿ 25-06-1993ರಿಂದ ಸಂರಕ್ಷಿಸಲಾಗಿದೆಯೆಂದು ತಿಳಿಸಿರುವರು. ಸದರಿ ಬೆಳ್ಳಿ ನಾಣ್ಯಗಳ ಲೋಹದ ಬೆಲೆಯು ರೂ.58,000/-ಗಳನ್ನು ಜಿಲ್ಲಾಧಿಕಾರಿ, ರಾಯಚೂರು ಇವರ ಮೂಲಕ ಸಂದಾಯ ಮಾಡಬೇಕಾಗುತ್ತದೆ. ಅಲ್ಲದೆ ಬೆಳ್ಳಿ ನಾಣ್ಯಗಳು ಚಾರಿತ್ರಿಕ ಮಹತ್ವವುಳ್ಳದ್ದಾಗಿದ್ದು, ಈಗಾಗಲೇ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆಯ ವಶದಲ್ಲಿರುವುದರಿಂದ ಸಂಬಂಧಪಟ್ಟವರಿಗೆ ಪರಿಹಾರ ರೂಪದಲ್ಲಿ ರೂ.58,000/- ಹಣ ಸಂದಾಯ ಮಾಡಲು ಜಿಲ್ಲಾಧಿಕಾರಿ, ರಾಯಚೂರು ಇವರಲ್ಲಿ ಠೇವಣಿ ಇಡಬೇಕಾಗುತ್ತದೆ. ಈ ಸಂಬಂಧ ಉದ್ಭವಿಸುವ ವೆಚ್ಚವನ್ನು 2008-09ನೇ ಸಾಲಿನ ಲೆಕ್ಕಶೀರ್ಷಿಕೆ 2205-00-103-0-01 (ಯೋಜನೇತರ) 200 ನಿರ್ವಹಣೆ ಅಡಿಯಲ್ಲಿ ಭರಿಸಲಾಗುವುದೆಂದು ತಿಳಿಸಿರುವರು.

ಮೇಲೆ ಓದಲಾದ (2)ರಲ್ಲಿ ಜಿಲ್ಲಾಧಿಕಾರಿಗಳು, ರಾಯಚೂರು ಇವರು ಸರ್ಕಾರಕ್ಕೆ ವರದಿ ಸಲ್ಲಿಸಿ ಶ್ರೀ ಉಮೇಶ್ ಪಾಟೀಲ ತಂದೆ ಮಾದೇವಪ್ಪ ಇವರ ಮನೆಯಲ್ಲಿ ದೊರೆತ ಹಳೆ ಕಾಲದ 306 ಬೆಳ್ಳಿನಾಣ್ಯಗಳನ್ನು ದಿನಾಂಕ 15-01-1992ರಂದು ಜಪ್ತಿ ಮಾಡಿಕೊಂಡು ಗುನ್ಹೇ ಸಂಖ್ಯೆ: 6/1992ರ ಪ್ರಕಾರ ಪ್ರಕರಣವನ್ನು ಯರಗೇರಾ ಪೋಲೀಸ್ ಠಾಣೆಯಲ್ಲಿ ದಾಖಲೆ ಮಾಡಿಕೊಂಡು ಸದರಿ ಪೋಲೀಸ್ ಠಾಣೆಯಲ್ಲಿ ಜಮಾ ಇಡಲಾಗಿದೆ. ಯರಗೇರಾ ಪೋಲೀಸ್ ಠಾಣೆಯಲ್ಲಿ ದಾಖಲಿಸಿದ ಸಿ.ಸಿ. ಸಂಖ್ಯೆ: 298/92ರನ್ವಯ ದಿನಾಂಕ 22-07-1995 ರಂದು ಸಿ.ಜೆ.ಎಂ. ನ್ಯಾಯಾಲಯ, ರಾಯಚೂರು ಇಲ್ಲಿ ಪ್ರಕರಣವು ಇತ್ಯರ್ಥವಾಗಿದೆಯೆಂದು ತಿಳಿಸಿರುವರು. ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರು ಸದರಿ 306 ನಾಣ್ಯಗಳ ಕಿಮ್ಮತ್ತು ರೂ.58,000/-ಗಳ ಹಣವನ್ನು ಶ್ರೀ ಉಮೇಶ್ ಪಾಟೀಲ್ ತಂದೆ ಮಾದೇವಪ್ಪ ಇವರಿಗೆ ಪಾವತಿ ಮಾಡಲು ಅನುಮೋದನೆ ಕೋರಿರುವರು.

ಮೇಲಿನ ಪ್ರಸ್ತಾವನೆಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂಪಾಪ್ರ 109 ಕೆಎಂಯು 2008, ಬೆಂಗಳೂರು ದಿನಾಂಕ: 6ನೇ ಜನವರಿ 2009

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಶ್ರೀ ಉಮೇಶ್ ಪಾಟೀಲ್, ತಂದೆ ಮಾದೇವಪ್ಪ, ಸಾ: ಮಿರ್ಜಾಪುರ, ತಾ: ರಾಯಚೂರು ಜಿಲ್ಲಾ ರಾಯಚೂರು ಇವರ ಮನೆಯಲ್ಲಿ ದೊರೆತ ಹಳೆ ಕಾಲದ 306 ಬೆಳ್ಳಿ ನಾಣ್ಯಗಳಿಗೆ ಒಟ್ಟು ಕಿಮ್ಮತ್ತು ರೂ.58,000/- (ರೂಪಾಯಿ ಐವತ್ತೆಂಟು ಸಾವಿರ ಮಾತ್ರ) ಗಳನ್ನು ಸದರಿಯವರಿಗೆ ಪಾವತಿಸಲು ಜಿಲ್ಲಾಧಿಕಾರಿ, ರಾಯಚೂರು ಜಿಲ್ಲೆ, ರಾಯಚೂರು ಇವರಲ್ಲಿ ಠೇವಣಿ ಇಡಲು ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರಿಗೆ ಸರ್ಕಾರವು ಅನುಮತಿಸಿ ಆದೇಶಿಸಿದೆ. ಸದರಿ 306 ಬೆಳ್ಳಿ ನಾಣ್ಯಗಳನ್ನು ಇಲಾಖೆಯ ಭದ್ರತಾ ಕೊಠಡಿಯಲ್ಲಿ ಸುರಕ್ಷಿತವಾಗಿ ಸಂರಕ್ಷಿಸಲು ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ ಇವರಿಗೆ ಆದೇಶಿಸಿದೆ.

ಈ ಮೊತ್ತವನ್ನು ಲೆಕ್ಕಶೀರ್ಷಿಕೆ 2205-00-103-0-01(ಯೋಜನೇತರ) 200-ನಿರ್ವಹಣೆ ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ ರವರ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಇಡಿ 1307:ಐಎಫ್(ಬಿಎ) 2008 ದಿನಾಂಕ: 28-10-2008ರಲ್ಲಿ ಪಡೆದು ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ 10-07-96 ರನ್ವಯ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.292

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಬೆಂಗಳೂರಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆಯ ಉಪನಿರ್ದೇಶಕರ ಹುದ್ದೆಯನ್ನು ಮುಂದುವರಿಸುವ ಬಗ್ಗೆ

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಸಂಕಇ 90 ಕೆಎಂಯು 2003 ದಿನಾಂಕ 5-9-2003.
2. ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 11 ಕೆಎಂಯು 2007 ದಿನಾಂಕ 26-7-2007 ಮತ್ತು 11-12-2007.
3. ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರ ಪತ್ರ ಸಂಖ್ಯೆ: ಡಿಎಎಂ:ಇಎಸ್‌ಟಿ:1:ಕ:ಸಂಖ್ಯೆ:350:2008-09:120 ದಿನಾಂಕ 22-08-2008.

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ದಿನಾಂಕ 5-9-2003ರ ಸರ್ಕಾರಿ ಆದೇಶದಲ್ಲಿ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆಯ, ಬೆಂಗಳೂರಿನಲ್ಲಿರುವ ಸಹಾಯಕ ನಿರ್ದೇಶಕರ (ವಸ್ತು ಸಂಗ್ರಹಾಲಯಗಳ ಅಭಿವೃದ್ಧಿ) ಹುದ್ದೆಯನ್ನು ಒಂದು ವರ್ಷದ ಅವಧಿಗೆ ಉಪನಿರ್ದೇಶಕರ ಹುದ್ದೆಗೆ ಉನ್ನತೀಕರಿಸಲಾಯಿತು. ಸದರೀ ಹುದ್ದೆಯು ಕಾಲಕಾಲಕ್ಕೆ ಮುಂದುವರಿಸಲ್ಪಟ್ಟು ಮೇಲೆ (2)ರಲ್ಲಿ ಓದಲಾದ ದಿನಾಂಕ 26-7-2007ರ ಸರ್ಕಾರಿ ಆದೇಶದಲ್ಲಿ 5-9-2006ರಿಂದ ಒಂದು ವರ್ಷದವರೆಗೆ ಹಾಗೂ ದಿನಾಂಕ 11-12-2007ರ ಆದೇಶದಲ್ಲಿ ಮತ್ತೊಂದು ವರ್ಷದವರೆಗೆ ಮುಂದುವರಿಸಿ ಆದೇಶಿಸಲಾಗಿದೆ. ಉಲ್ಲೇಖ (3)ರ ಪತ್ರದನ್ವಯ ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಬೆಂಗಳೂರಿನಲ್ಲಿರುವ ಉಪನಿರ್ದೇಶಕರ ಹುದ್ದೆಯು ಅತ್ಯಂತ ಪ್ರಮುಖ ಹಾಗೂ ಅತ್ಯಾವಶ್ಯಕವಾಗಿರುವುದರಿಂದ ಸದರಿ ಹುದ್ದೆಯನ್ನು ದಿನಾಂಕ 5-9-2008ರಿಂದ ಖಾಯಂ ಆಗಿ ಮುಂದುವರಿಸಲು ಪ್ರಸ್ತಾಪಿಸಿರುವರು. ಸದರಿ ಹುದ್ದೆಯನ್ನು ಮುಂದುವರಿಸುವ ವಿಷಯವನ್ನು ಪರಿಶೀಲಿಸಿದ ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 215 ಕೆಎಂಯು 2008, ಬೆಂಗಳೂರು, ದಿನಾಂಕ: 16ನೇ ಡಿಸೆಂಬರ್ 2008

ಬೆಂಗಳೂರಿನಲ್ಲಿರುವ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆಯ ಉಪನಿರ್ದೇಶಕರ ಹುದ್ದೆಯನ್ನು ದಿನಾಂಕ 5-9-2008ರಿಂದ 4-9-2009ರವರೆಗೆ ಒಂದು ವರ್ಷದ ಅವಧಿಗೆ ಸರ್ಕಾರವು ಈ ಮೂಲಕ ಮುಂದುವರಿಸಿ ಆದೇಶಿಸಿದೆ. ಈ ಹುದ್ದೆಗೆ ಪರಿಷ್ಕೃತ ವೇತನ ಶ್ರೇಣಿಯಲ್ಲಿ ನಿಯಮಾನುಸಾರ ಲಭ್ಯವಿರುವ ವೇತನ ಭತ್ಯೆ ಇತ್ಯಾದಿಗಳು ಅನ್ವಯಿಸುತ್ತವೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ ಅವರು ಅನಧಿಕೃತ ಟಿಪ್ಪಣಿ ಸಂಖ್ಯೆ: ಶಿಇ 951 ಐಎಫ್‌ಎಸ್ 2008 ದಿನಾಂಕ 21-11-2008ರಲ್ಲಿ ನೀಡಿದ ಸಹಮತಿ

ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ 10-7-1996ರಲ್ಲಿ ಇಲಾಖೆಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.147

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,

ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಪ್ರಾಚ್ಯವಸ್ತು ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಬೆಂಗಳೂರು ಆಯುಕ್ತರ ಕಛೇರಿಯ ಹುದ್ದೆಗಳನ್ನು ದಿನಾಂಕ: 27-8-2008 ರಿಂದ ದಿನಾಂಕ: 26-8-2009 ರವರೆಗೆ ಮುಂದುವರಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರಿ ಆದೇಶ ಸಂಖ್ಯೆ: ಸಂಕಇ 95 ಕೆಎಂಯು 2004 ದಿನಾಂಕ 26-8-2004.
2) ಆಯುಕ್ತರು ಪ್ರಾಚ್ಯವಸ್ತು ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಇವರ ಪತ್ರ ಸಂಖ್ಯೆ: ಅಪ್ರಾಸಂಪ:ಇಎಸ್‌ಟಿ:ಹು.ಮು/2008-09/178 ದಿನಾಂಕ: 25-06-2008.
3) ಸರ್ಕಾರಿ ಆದೇಶಸಂಖ್ಯೆ: ಕಸಂವಾಪ್ರ 110 ಕೆಎಂಯು 2006 ದಿನಾಂಕ: 27-8-2006
4) ತಿದ್ದುಪಡಿ ಆದೇಶ ಸಂಖ್ಯೆ: ಕಸಂವಾಪ್ರ 110 ಕೆಎಂಯು 2006 ದಿನಾಂಕ 22-12-2006
5) ಸರ್ಕಾರಿ ಆದೇಶ ಸಂಖ್ಯೆ: ಸಂಕಇ 199 ಕೆಎಂಯು 2007 ದಿನಾಂಕ 24-10-2007.
6) ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 267 ಕೆಎಂಯು 2007 ದಿನಾಂಕ: 31-2008

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ದಿನಾಂಕ: 26-08-2004ರ ಸರ್ಕಾರಿ ಆದೇಶದಲ್ಲಿ ಪ್ರಾಚ್ಯವಸ್ತು ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆಗೆ ಈ ಕೆಳಕಂಡ 10 ಹುದ್ದೆಗಳನ್ನು ಸೃಜಿಸಿ ಒಂದು ವರ್ಷದ ಅವಧಿಗೆ ಮುಂದುವರಿಸಿದೆ:

1. ಆಯುಕ್ತರ ತಾಂತ್ರಿಕ ಸಹಾಯಕರು	1 ಹುದ್ದೆ
2. ಪತ್ರಾಂಕಿತ ವ್ಯವಸ್ಥಾಪಕರು	1 ಹುದ್ದೆ
3. ಪ್ರಥಮ ದರ್ಜೆ ಸಹಾಯಕರು	1 ಹುದ್ದೆ
4. ಕಂಪ್ಯೂಟರ್ ಡಾಟಾ ಎಂಟ್ರಿ ಆಪರೇಟರ್	1 ಹುದ್ದೆ
5. ವಾಹನ ಚಾಲಕ	1 ಹುದ್ದೆ
6. ಅಟೆಂಡರ್	1 ಹುದ್ದೆ

ಹಾಗೂ ಉಪನಿರ್ದೇಶಕರ ಕಛೇರಿ, ಮೈಸೂರು ಇಲ್ಲಿನ ಕೆಳಕಂಡ 4 ಹುದ್ದೆಗಳ:

1. ಉಪನಿರ್ದೇಶಕರು	1 ಹುದ್ದೆ
2. ಪ್ರಥಮ ದರ್ಜೆ ಸಹಾಯಕರು	1 ಹುದ್ದೆ
3. ಶೀಘ್ರಲಿಪಿಗಾರರು	1 ಹುದ್ದೆ
4. ಗ್ರೂಪ್-ಡಿ	1 ಹುದ್ದೆ

ಮೇಲೆ ಓದಲಾದ (3) ಮತ್ತು (4)ರಲ್ಲಿನ ಆದೇಶಗಳಲ್ಲಿ ಈ ಹುದ್ದೆಗಳನ್ನು ಕಾಲಕಾಲಕ್ಕೆ ಒಂದೊಂದು ವರ್ಷದ ಅವಧಿಗೆ ಮುಂದುವರಿಸಿ ಆದೇಶಿಸಿದೆ. ನಂತರ ಮೇಲೆ ಓದಲಾದ (5)ರ ಆದೇಶದಲ್ಲಿ ಈ ಹುದ್ದೆಗಳನ್ನು ದಿನಾಂಕ: 27-8-2007ರಿಂದ ದಿ: 26-8-2008ರವರೆಗೆ ಒಂದು ವರ್ಷದ ಅವಧಿಗೆ ಮುಂದುವರಿಸಲಾಗಿದೆ. ಮೇಲೆ (6)ರಲ್ಲಿ ಓದಲಾದ ಆದೇಶದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸಂಬಂಧಿಸಿದಂತೆ ಮುಂದುವರಿದ ಯೋಜನಾ ಕಾರ್ಯಕ್ರಮದ ಅಡಿಯಲ್ಲಿ 2007-08ನೇ ಸಾಲಿನ ಹೊಸ ಘಟಕಗಳಿಗೆ ಹುದ್ದೆಗಳ ಸೃಜನೆಗೆ ಸಂಬಂಧಿಸಿದಂತೆ ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಗೆ ಅಧ್ಯರ್ಪಿಸಲಾಗಿರುವ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ಬದಲಾಗಿ ಒಂದು ಪುರಾತತ್ವ ಸಂರಕ್ಷಣಾ ಇಂಜನಿಯರ್ ಹುದ್ದೆಯನ್ನು ವೇತನ ಶ್ರೇಣಿ ರೂ.14050-25050 ರಲ್ಲಿ ಸೃಜಿಸಲಾಗಿದೆ. ಮತ್ತು ಈ ಹುದ್ದೆಯಲ್ಲಿ ಪುರಾತತ್ವ ಸಂರಕ್ಷಣಾ ಇಂಜನಿಯರ್‌ರವರು ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುತ್ತಾರೆ. ಆಯುಕ್ತರು ಪ್ರಾಚ್ಯವಸ್ತು ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಬೆಂಗಳೂರು ಅವರು ಮೇಲೆ (2) ರಲ್ಲಿ ಓದಲಾದ ದಿನಾಂಕ: 25-06-2008ರ ಪತ್ರದಲ್ಲಿ ಮೇಲಿನ 10 ಹುದ್ದೆಗಳನ್ನು ದಿನಾಂಕ: 27-08-2008 ರಿಂದ ಮತ್ತೊಂದು ವರ್ಷದವರೆಗೆ ಮುಂದುವರಿಸುವಂತೆ ಕೋರಿದ್ದಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಸಂಕಇ 196 ಕೆಎಂಯು 2008, ಬೆಂಗಳೂರು, ದಿನಾಂಕ: 5ನೇ ಡಿಸೆಂಬರ್ 2008

ಸರ್ಕಾರವು ಆಯುಕ್ತರು ಪ್ರಾಚ್ಯವಸ್ತು ಸಂಗ್ರಹಾಲಯ ಮತ್ತು ಪರಂಪರ ಇಲಾಖೆಯಲ್ಲಿರುವ ಈ ಕೆಳಕಂಡ ಹುದ್ದೆಗಳನ್ನು ದಿನಾಂಕ: 27-08-2008 ರಿಂದ ದಿನಾಂಕ: 26-08-2009 ರವರೆಗೆ ಒಂದು ವರ್ಷದ ಅವಧಿಗೆ ಮುಂದುವರಿಸಲಾಗಿದೆ.

1. ಆಯುಕ್ತರ ತಾಂತ್ರಿಕ ಸಹಾಯಕರು — 1 ಹುದ್ದೆ
2. ಪುರಾತತ್ವ ಸಂರಕ್ಷಣಾ ಇಂಜಿನಿಯರ್ — 1 ಹುದ್ದೆ
3. ಪ್ರಥಮ ದರ್ಜೆ ಸಹಾಯಕರು — 1 ಹುದ್ದೆ
4. ಬೆರಳಚ್ಚುಗಾರರು — 1 ಹುದ್ದೆ
5. ವಾಹನ ಚಾಲಕ — 1 ಹುದ್ದೆ
6. ಅಟೆಂಡರ್ — 1 ಹುದ್ದೆ

ಹಾಗೂ ಉಪನಿರ್ದೇಶಕರ ಕಛೇರಿ, ಮೈಸೂರು ಇಲ್ಲಿನ ಕೆಳಕಂಡ 4 ಹುದ್ದೆಗಳ:

1. ಉಪನಿರ್ದೇಶಕರು — 1 ಹುದ್ದೆ
2. ಪ್ರಥಮ ದರ್ಜೆ ಸಹಾಯಕರು — 1 ಹುದ್ದೆ
3. ಶೀಘ್ರಲಿಪಿಗಾರರು — 1 ಹುದ್ದೆ
4. ಗ್ರೂಪ್-ಡಿ — 1 ಹುದ್ದೆ

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಶಿಇ 765 ಐಎಫ್(ಬಿಎ) 2007 ದಿನಾಂಕ: 13-10-2008 ರಲ್ಲಿ ನೀಡಿದ ಸಹಮತಿಯ ಮೇರೆಗೆ ಹಾಗೂ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ: 10-07-1996ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್.143

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಬೆಂಗಳೂರು ಮತ್ತು ಮೈಸೂರು ನಡುವೆ ಎರಡನೇ ಬ್ರಾಡಗೇಜ್ ರೈಲ್ವೆ ಹಳಿಯ ಮಾರ್ಗದ ನಿರ್ಮಾಣದ ಸಲುವಾಗಿ ಟಿಪ್ಪು ಸುಲ್ತಾನ್ ಕಾಲದ ಮದ್ದುಗುಂಡಿನ ಕೋಠಿಯೊಂದನ್ನು ಸ್ಥಳಾಂತರಿಸಿ ಹಾಗೂ ಕೋಟೆ ಗೋಡೆಯನ್ನು ಕೆಡವಿದ ನಂತರ ರೈಲ್ವೆ ಟ್ರ್ಯಾಕ್ ಅಂಚಿನಲ್ಲಿ ಅದೇ ಮಾದರಿಯ ಗೋಡೆಯನ್ನು ಪುನರ್ ನಿರ್ಮಾಣ ಮಾಡುವ ಬಗ್ಗೆ.

ಓದಲಾಗಿದೆ:
1) ನಿರ್ದೇಶಕರು ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರ ಪತ್ರ ಸಂಖ್ಯೆ: ಡಿಎಎಂ: ಎಸಿಟಿ.6/56/2008-09; ದಿನಾಂಕ 10.07.2008
2) ಪ್ರಧಾನ ಕಾರ್ಯದರ್ಶಿಗಳು ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ 7.08.2008ರಂದು ನಡೆದ ಸಭೆಯ ನಡವಳಿಗಳು
3) ಪ್ರಧಾನ ಕಾರ್ಯದರ್ಶಿಗಳು, ಮೂಲಭೂತ ಸೌಲಭ್ಯಗಳ ಇಲಾಖೆ ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ದಿನಾಂಕ 20.09.2008ರಂದು ನಡೆದ ಸಭೆಯ ನಡವಳಿಗಳು
4) ದಿನಾಂಕ 02.01.2009ರಂದು ನಡೆದ ಸಚಿವ ಸಂಪುಟ ಸಭೆಯ ನಿರ್ಣಯ, ಪ್ರಕರಣ ಸಂಖ್ಯೆ 349/2008

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಬೆಂಗಳೂರಿನಿಂದ ಮೈಸೂರು ನಗರದವರೆಗೆ ಎರಡನೇ ಬ್ರಾಡ್‌ಗೇಜ್ ರೈಲ್ವೆ ಹಳಿಯ ಮಾರ್ಗವನ್ನು ಸಾರ್ವಜನಿಕರ ಅನುಕೂಲಕ್ಕಾಗಿ ಕಲ್ಪಿಸಲು ನೈರುತ್ಯ ರೈಲ್ವೆಯವರು ಯೋಜನೆಯೊಂದನ್ನು ಸಿದ್ದಪಡಿಸಿರುತ್ತಾರೆಂದು ತಿಳಿಸಿ ಸದರಿ ಯೋಜನೆಯ ನಕ್ಷೆಯೊಂದಿಗೆ ಹಾಗೂ ಇಲಾಖೆಯ ತಾಂತ್ರಿಕ ತಜ್ಞರು ಮತ್ತು ಸಲಹಾ ಸಮಿತಿಯ ಸದಸ್ಯರಾದ ಶ್ರೀ ಅಶ್ವಥ್‌ನಾರಾಯಣ ಇವರೊಂದಿಗೆ ಸ್ಥಳ ಪರಿವೀಕ್ಷಣೆ ಮಾಡಿದ್ದು, ಈ ಪುರಾತನ ಮದ್ದು ಗುಂಡಿನ ಮನೆಯನ್ನು ಇಟ್ಟಿಗೆ ಹಾಗೂ ಗಾರೆಯಿಂದ ತಳಪದಿಯನ್ನು ಕಲ್ಲಿನಿಂದ ನಿರ್ಮಾಣ ಮಾಡಿರುವುದರಿಂದ ಸಾರ್ವಜನಿಕರ ಹಿತದೃಷ್ಟಿಯಿಂದ ಈ ಮದ್ದಿನ ಮನೆಯನ್ನು ಹೊಸ ತಾಂತ್ರಿಕ ಕೌಶಲ್ಯದಿಂದ ಸ್ಥಳಾಂತರಗೊಳಿಸಿ ಉಳಿಸಿಕೊಳ್ಳುವ ಅಗತ್ಯವಿದೆ

ಎಂದು ಅಭಿಪ್ರಾಯ ವ್ಯಕ್ತಪಡಿಸಿ, ತಾಂತ್ರಿಕ ಸಲಹಾ ಸಮಿತಿಯ ವರದಿಯೊಂದಿಗೆ ಟಿಪ್ಪು ಸುಲ್ತಾನ್ ಕಾಲದ ಮದ್ದು ಗುಂಡಿನ ಕೋಠಿಯನ್ನು ಸ್ಥಳಾಂತರ ಮಾಡಿ, ಸ್ಮಾರಕವು ಹಿಂದಿನ ರೂಪದಲ್ಲಿದ್ದಂತೆ ಮಾಡುವುದಕ್ಕೆ ಅನುಮತಿ ನೀಡಬೇಕೆಂದು ಕೋರುತ್ತಾ, ಮದ್ದಿನ ಮನೆಯ ಪುನರ್ ನಿರ್ಮಾಣಕ್ಕೆ ಬೇಕಾದ ಜಾಗ ಹಾಗೂ ಇದಕ್ಕೆ ತಗಲುವ ವೆಚ್ಚವನ್ನು ಸಂಪೂರ್ಣವಾಗಿ ಭರಿಸಲು ರೈಲ್ವೆ ಇಲಾಖೆಯವರು ಸಿದ್ದರಿರುತ್ತಾರೆಂದು, ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ ಮೈಸೂರು ರವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ (2) ರಲ್ಲಿ ಓದಲಾದ ನಡವಳಿಯಂತೆ ವಿಷಯವನ್ನು ಕೂಲಂಕುಷವಾಗಿ ಪರಿಶೀಲಿಸಿ ಸಾರ್ವಜನಿಕ ಹಿತದೃಷ್ಟಿಯಿಂದ ಮದ್ದಿನ ಮನೆಯನ್ನು ಸ್ಥಳಾಂತರಿಸಿ ಪುನರ್ ನಿರ್ಮಾಣ ಮಾಡುವ ಸಂಬಂಧದಲ್ಲಿ ಕಾನೂನು ಸಲಹೆಯನ್ನು ಪಡೆದು ಸಚಿವ ಸಂಪುಟದ ನಿರ್ಣಯಕ್ಕಾಗಿ ಮಂಡಿಸಲು ನಿರ್ಧರಿಸಲಾಯಿತು.

ಮೇಲೆ (3) ರಲ್ಲಿ ಓದಲಾದ ನಡುವಳಿಯಂತೆ ಪ್ರಧಾನ ಕಾರ್ಯದರ್ಶಿಗಳು ಮೂಲಭೂತ ಸೌಲಭ್ಯಗಳ ಇಲಾಖೆ ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ದಿನಾಂಕ 20.09.2008ರ ನಿರ್ಣಯದಂತೆ ಜಂಟಿ ಸ್ಥಳ ಪರಿವೀಕ್ಷಣೆ ಮಾಡಿ ಸೂಕ್ತವಾಗಿ ನಿರ್ಧರಿಸುವಂತೆ ಅಭಿಪ್ರಾಯಿಸಲಾಗಿದೆ.

ಮೇಲೆ (4) ರಲ್ಲಿ ಓದಲಾದ ದಿನಾಂಕ 02.01.2009 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಬೆಂಗಳೂರು ಮತ್ತು ಮೈಸೂರಿನ ನಡುವೆ ಎರಡನೇ ಬ್ರಾಡ್ ಗೇಜ್‌ರೈಲ್ವೆ ಹಳಿಯ ಮಾರ್ಗದ ನಿರ್ಮಾಣದ ಸಲುವಾಗಿ ಟಿಪ್ಪು ಸುಲ್ತಾನ್ ಕಾಲದ ಮದ್ದು ಗುಂಡಿನ ಕೋಠಿಯೊಂದನ್ನು ಸ್ಥಳಾಂತರಗೊಳಿಸಿ ಪುನರ್ ನಿರ್ಮಾಣ ಮಾಡುಲು ಸಚಿವ ಸಂಪುಟವು ಅನುಮೋದಿಸಿರುವುದರಿಂದ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 152 ಕೆಎಂಯು 2008, ಬೆಂಗಳೂರು, ದಿನಾಂಕ: 6ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ದಿನಾಂಕ 02.01.2009 ರಂದು ನಡೆದ ಸಚಿವ ಸಂಪುಟದ ಸಭೆಯ ನಿರ್ಣಯದಂತೆ ರಾಷ್ಟ್ರೀಯ ಮಹತ್ವವನ್ನು (National Importance) ಪಡೆದಿರುವ, ಬೆಂಗಳೂರಿನಿಂದ ಮೈಸೂರು ನಗರದವರೆಗೆ ನಿರ್ಮಿಸಲು ಉದ್ದೇಶಿಸಿರುವ ಎರಡನೇ ಬ್ರಾಡ್‌ಗೇಜ್ ರೈಲ್ವೆ ಹಳಿಯ ಮಾರ್ಗವನ್ನು ನೈರುತ್ಯ ರೈಲ್ವೆಯವರು ಸಾರ್ವಜನಿಕರ ಅನುಕೂಲಕ್ಕಾಗಿ ನಿರ್ಮಿಸಲು ಅಡ್ಡವಾಗಿರುವ/ತೊಡಾಕಾಗಿರುವ ಟಿಪ್ಪು ಸುಲ್ತಾನ್ ಮದ್ದು ಗುಂಡಿನ ಕೋಟೇಯನ್ನು (ಇದರ ಮೂಲ ಆಕೃತಿ ಹಾಳಾಗದಂತೆ ಅತ್ಯುನ್ನತ ತಂತ್ರಜ್ಞಾನ ಬಳಸಿ) ಕೋಟೆಯೊಳಗೆ ಬೇರೆ ಸ್ಥಳದಲ್ಲಿ ರೈಲ್ವೆ ಇಲಾಖೆಯು ಪೂರ್ಣ ವೆಚ್ಚದಲ್ಲಿ ಸ್ಥಳಾಂತರ ಮಾಡಿ ಪುನರ್ ನಿರ್ಮಾಣ ಮಾಡಲು ಹಾಗೂ ಕೋಟೆ ಗೋಡೆಯ ಅಂಚಿನಲ್ಲಿ ಈ ರೈಲ್ವೆ ಮಾರ್ಗವು ಹಾದು ಹೋಗುವುದರಿಂದ ಅಂಚಿನಲ್ಲಿ ಗೋಡೆಯನ್ನು ಕೆಡವಿ ಹಾಕಿದ ನಂತರ ರೈಲ್ವೆ ಟ್ರ್ಯಾಕ್ ಅಂಚಿನಲ್ಲಿ ಅದೇ ಮಾದರಿಯ ಗೋಡೆಯ ಪುನರ್ ನಿರ್ಮಾಣ ಮಾಡಲು ಸರ್ಕಾರದ ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.581 **ಎಂ.ಕೆ. ಧರ್ಮರಾಜಪ್ಪ**

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ವಿಷಯ: ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರಕ್ಕೆ 2008-09ನೇ ಸಾಲಿನ ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 110 ಕೆಎಂಯು 2008, ದಿ: 02.08.2008.
2) ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಅವರ ಪತ್ರ ಸಂಖ್ಯೆ: ಡಿಎಎಂ/ಎಸಿಟಿ/1/41/2008-09, ದಿನಾಂಕ 10.11.2008.

ಪ್ರಸ್ತಾವನೆ:

ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದ ಸಿಬ್ಬಂದಿ ವೇತನಕ್ಕಾಗಿ 2008-09ನೇ ಸಾಲಿಗೆ ನಿಗದಿಪಡಿಸಿದ ರೂ.27.30 ಲಕ್ಷಗಳ ಪೈಕಿ ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರೂ.9.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿತ್ತು. ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ ಅವರು ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಪ್ರಾಧಿಕಾರದ ಆಯುಕ್ತರು ಬಿಡುಗಡೆ ಮಾಡಿದ ಹಣಕ್ಕೆ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಪ್ರಾಧಿಕಾರಕ್ಕೆ ಎರಡನೇ ಕಂತಿನ ಹಣ ಬಿಡುಗಡೆ ಮಾಡಲು ಶಿಫಾರಸ್ಸು ಮಾಡಿದ್ದಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

ಆದೇಶ ಸಂಖ್ಯೆ: ಕಸಂವಾಪ್ರ 226 ಕೆಎಂಯು 2008, ಬೆಂಗಳೂರು, ದಿನಾಂಕ: 7ನೇ ಫೆಬ್ರವರಿ 2009

ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದ 2008-09ನೇ ಸಾಲಿನ ಸಿಬ್ಬಂದಿ ವೇತನಕ್ಕಾಗಿ ನಿಗದಿಪಡಿಸಿದ ರೂ.27.30 ಲಕ್ಷಗಳಲ್ಲಿ ಎರಡನೇ ಕಂತಿನ ಮೊತ್ತ ರೂ.18.30 ಲಕ್ಷಗಳನ್ನು (ರೂಪಾಯಿ ಹದಿನೆಂಟು ಲಕ್ಷ

ಮೂವತ್ತು ಸಾವಿರ ಮಾತ್ರ) ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರಕ್ಕೆ ಪೇಯೀಸ್ ರಸೀತಿ ಮೂಲಕ ಬಿಡುಗಡೆ ಮಾಡಲು ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಅವರಿಗೆ ಈ ಮೂಲಕ ಸರ್ಕಾರದ ಮಂಜೂರಾತಿ ನೀಡಿದೆ.

ಈ ವೆಚ್ಚವನ್ನು 2008-09ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 2205-00-103-0-18 (ಯೋಜನೇತರ) 101 ಸಹಾಯನುದಾನ ರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಕನ್ನಡ ಮತ್ತು ಸಂಸ್ಕೃತಿ, ಹಾಗೂ ವಾರ್ತಾ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಇಡಿ 10 ಐಎಫ್(ಬಿಎ) 2009, ದಿನಾಂಕ 12.01.2009 ಹಾಗೂ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ 10.07.96ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.624

ಎಂ.ಕೆ. ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ,
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ವಿಷಯ: ಅಕ್ರಮ ಗಣಿಗಾರಿಕೆ ಬಗ್ಗೆ ಮಾನ್ಯ ಲೋಕಾಯುಕ್ತರವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಅರಣ್ಯ ಇಲಾಖೆಗೆ ಸಂಬಂಧಿಸಿದಂತೆ ಶಿಫಾರಸ್ಸು ಮಾಡಿರುವ ಅಂಶಗಳನ್ನು ಪರಿಶೀಲಿಸಲು ಸಮಿತಿಯನ್ನು ರಚಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಸಿಐ 164 ಎಂಎಂಎಂ 2006, ದಿನಾಂಕ: 12-03-2007.

2) ಸರ್ಕಾರದ ಕಾರ್ಯದರ್ಶಿ (ಗಣಿ ಸಪ್ರಕೈ ಮತ್ತು ಜವಳಿ) ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ರವರ ಪತ್ರ ಸಂಖ್ಯೆ: ಸಿಐ 164 ಎಂಎಂಎಂ 2006(ಭಾಗ) ದಿನಾಂಕ: 03-01-2009.

3) ಪ್ರಧಾನ ಕಾರ್ಯದರ್ಶಿ, ಅಪಜೀ ಇಲಾಖೆ ರವರ ಟಿಪ್ಪಣಿ ಸಂಖ್ಯೆ: 14/09 ದಿನಾಂಕ: 15-01-2009.

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರಿ ಆದೇಶ ದಿನಾಂಕ: 12-03-2007ರಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 7(2-ಎ)ರ ಅಡಿ ಸರ್ಕಾರವು ರಾಜ್ಯದಲ್ಲಿನ ಅಕ್ರಮ ಗಣಿಗಾರಿಕೆ ಮತ್ತು ಸರ್ಕಾರದ ಮೇಲಿನ ಆರೋಪಗಳ ಕುರಿತು ತನಿಖೆ ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸಲಾಗಿತ್ತು. ಅದರಂತೆ ಮಾನ್ಯ ಲೋಕಾಯುಕ್ತರು ದಿನಾಕ: 18-12-2008 ರಂದು ಸರ್ಕಾರಕ್ಕೆ ನೀಡಿರುವ ವರದಿಯಲ್ಲಿ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3)ರ ಅಡಿಯಲ್ಲಿ ಕೆಲವು ಶಿಫಾರಸ್ಸುಗಳನ್ನು ಮಾಡಿರುತ್ತಾರೆ. ಸದರಿ ಶಿಫಾರಸ್ಸುಗಳನ್ನು ಕಲಂ 12(4) ರ ಪ್ರಕಾರ ಸರ್ಕಾರವು ಪರಿಶೀಲಿಸಿ ಕ್ರಮ ಜರುಗಿಸಬೇಕಾಗಿದೆ. ಆದ್ದರಿಂದ ಈ ಕುರಿತು ನಿರ್ಣಯ ತೆಗೆದುಕೊಳ್ಳಲು ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಯು ಒಂದು ತಿಂಗಳ ಒಳಗಾಗಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಬೇಕಾಗಿರುವುದರಿಂದ ಅರಣ್ಯ ಇಲಾಖೆಗೆ ಸಂಬಂಧಿಸಿದಂತೆ ವರದಿಯನ್ನು ನೀಡುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯು ಕೋರಿದೆ.

ಅಕ್ರಮ ಗಣಿಗಾರಿಕೆ ಬಗ್ಗೆ ಮಾನ್ಯ ಲೋಕಾಯುಕ್ತರವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಅರಣ್ಯ ಇಲಾಖೆಗೆ ಸಂಬಂಧಿಸಿದಂತೆ ಶಿಫಾರಸ್ಸು ಮಾಡಿರುವ ಅಂಶಗಳನ್ನು ಪರಿಶೀಲಿಸಲು ಈ ಕೆಳಕಂಡ ಅಧಿಕಾರಿಗಳನ್ನು ಒಳಗೊಂಡಂತೆ ಒಂದು ಸಮಿತಿಯನ್ನು ರಚಿಸುವಂತೆ ಪ್ರಧಾನ ಕಾರ್ಯದರ್ಶಿ, ಅಪಜೀ ಇಲಾಖೆ ಇವರು ಮೇಲೆ ಓದಲಾದ (3)ರ ಟಿಪ್ಪಣಿಯಲ್ಲಿ ಆದೇಶಿಸಿರುತ್ತಾರೆ. ಆದ್ದರಿಂದ ಈ ಕೆಳಕಂಡ ಆದೇಶ.

1) ಶ್ರೀ ಬಿ.ಕೆ. ಸಿಂಗ್,
ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (EPWRT) – ಅಧ್ಯಕ್ಷರು

2) ಶ್ರೀ ಸಿ.ಡಿ. ದ್ಯಾವಯ್ಯ,
ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಸಂರಕ್ಷಣೆ) – ಸದಸ್ಯರು

3) ಶ್ರೀ ಯು.ಪಿ. ಸಿಂಗ್,
ಅರಣ್ಯ ಸಂರಕ್ಷಣಾಧಿಕಾರಿ (ಕೆರೆ ಅಭಿವೃದ್ಧಿ ಪ್ರಾಧಿಕಾರ) – ಸದಸ್ಯರು
4) ಅರಣ್ಯ ಸಂರಕ್ಷಣಾಧಿಕಾರಿ, ಹಾಸನ – ಸದಸ್ಯರು
5) ಅರಣ್ಯ ಸಂರಕ್ಷಣಾಧಿಕಾರಿ, ಬಳ್ಳಾರಿ – ಸದಸ್ಯರು
6) ಶ್ರೀ ಸುಗಾರ
ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಕಾರ್ಯ ಯೋಜನೆ) – ಸಂಚಾಲಕರು

ಸರ್ಕಾರಿ ಆದೇಶ ಸಂಖ್ಯೆ: ಅಪಜೀ 02 ಎಫ್‌ಎಫ್‌ಎಂ 2009(ಭಾಗ), ಬೆಂಗಳೂರು, ದಿನಾಂಕ 17ನೇ ಜನವರಿ 2009.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ರಾಜ್ಯದಲ್ಲಿನ ಅಕ್ರಮ ಮತ್ತು ಅನಧಿಕೃತ ಗಣಿಗಾರಿಕೆಯ ಕುರಿತು ಮಾನ್ಯ ಲೋಕಾಯುಕ್ತರವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಅರಣ್ಯ ಇಲಾಖೆಗೆ ಸಂಬಂಧಿಸಿದಂತೆ ಶಿಫಾರಸ್ಸು ಮಾಡಿರುವ ಅಂಶಗಳನ್ನು ಪರಿಶೀಲಿಸಲು ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡ ಸಮಿತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ರಚಿಸಿದೆ.

1) ಶ್ರೀ ಬಿ.ಕೆ. ಸಿಂಗ್,
ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (EPWRT) – ಅಧ್ಯಕ್ಷರು
2) ಶ್ರೀ ಸಿ.ಡಿ. ದ್ಯಾವಯ್ಯ,
ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಸಂರಕ್ಷಣೆ) – ಸದಸ್ಯರು
3) ಶ್ರೀ ಯು.ವಿ. ಸಿಂಗ್,
ಅರಣ್ಯ ಸಂರಕ್ಷಣಾಧಿಕಾರಿ (ಕೆರೆ ಅಭಿವೃದ್ಧಿ ಪ್ರಾಧಿಕಾರ) – ಸದಸ್ಯರು
4) ಅರಣ್ಯ ಸಂರಕ್ಷಣಾಧಿಕಾರಿ, ಹಾಸನ – ಸದಸ್ಯರು
5) ಅರಣ್ಯ ಸಂರಕ್ಷಣಾಧಿಕಾರಿ, ಬಳ್ಳಾರಿ – ಸದಸ್ಯರು
6) ಶ್ರೀ ಸುಗಾರ
ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಕಾರ್ಯ ಯೋಜನೆ) – ಸಂಚಾಲಕರು

ಈ ಸಮಿತಿಯು ದಿನಾಂಕ: 31-1-2009 ರೊಳಗಾಗಿ ಈ ಕೆಳಕಂಡಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

1) ಲೋಕಾಯುಕ್ತರವರ ವರದಿಯನ್ನು ಅಧ್ಯಯನ ಮಾಡಿ ಅದರಲ್ಲಿ ಮಾಡಿರುವ ಶಿಫಾರಸ್ಸಿನಂತೆ ಇಲಾಖೆಯು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ವರದಿ ಮಾಡುವುದು.
2) ಲೋಕಾಯುಕ್ತರವರ ಶಿಫಾರಸ್ಸಿನ ಮೇರೆಗೆ ಇಲಾಖೆಯು ತನ್ನ ಹಂತದಲ್ಲಿ ತೆಗೆದುಕೊಳ್ಳಬೇಕಾಗಿರುವ ಕ್ರಮಗಳನ್ನು 20 ದಿನಗಳೊಳಗೆ ತೆಗೆದುಕೊಳ್ಳುವುದು ಮತ್ತು ಸರ್ಕಾರದ ಮಟ್ಟದಲ್ಲಿ ಕ್ರಮ ತೆಗೆದುಕೊಳ್ಳಬೇಕಾದ ಅಗತ್ಯವಿದ್ದಲ್ಲಿ, ಈ ಬಗ್ಗೆ ವರದಿಯನ್ನು ಸಲ್ಲಿಸುವುದು.
3) ಮೇಲ್ಕಂಡ ಅನುಸರಣಾ ವರದಿಯ ಪ್ರಗತಿಯನ್ನು ದಿನಾಂಕ: 15-2-2009 ರೊಳಗೆ ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.504

ಪಿ.ಆರ್. ಕಲಾವತಿ

ಸರ್ಕಾರದ ಅಧೀನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

FOREST, ECOLOGY AND ENVIRONMENT SECRETARIAT

Sub: Diversion of 1.20 ha. of forest land in Sirsi Division of Uttara Kannada District for laying underground Optical Fibre Cable from Kumta-Musavalli in favour of M/s Reliance Communciations Limited, Bangalore.

Read:
1. Letter No.A5(2) GFL.CR.3/ 08-09, dated:19.4.2008 of Principal Chief Conservator of Forests, Bangalore.
2. Government of India letter No.F.No.11-9/98-FC, dated: 21.11.2005.

Preamble:

The Principal Chief Conservator of Forests, Bangalore vide his letter dated 19-4.2008 read at (1) above has submitted the proposal for diversion of 1.20 ha. of forest land under the Forest (Conservation) Act, 1980 and Government of India guidelines dated: 21.11.2005 cited under reference (2) above for

laying underground Optical Fiber Cable from Kumta-Musavalli in Sirsi Division of Uttarakannada District in favour of M/s Reliance Communications Limited, Bangalore subject to certain conditions.

The proposal has been examined in detail and hence the order.

Government Order No. FEE 88 FLL 2008, Bangalore, Dated: 10th November 2008.

In the circumstances explained in the preamble above, Government are pleased to accord approval under Forest (Conservation) Act, 1980 and guidelines dated: 21.11.2005 of the Government of India for diversion of 1.20 ha. of forest land in Sirsi Division of Uttara Kannada District for laying underground Optical Fibre Cable from Kumta to Musavalli in Sirsi Division of Uttara Kannada District in favour of M/s Reliance Communications Limited, Bangalore subject to the following conditions.

1. The legal status of the forest land will continue to be as forest land.
2. The land shall be utilized only for the purpose for which it is released.
3. The user agency has to pay the lease rent as fixed by the Government at the time of sanction and any subsequent orders in this regard.
4. The lease is granted for 20 (twenty) years.
5. The Karnataka Forest Act 1963 and Rules 1969 will be applicable for any violation.
6. If the land is not utilized for the purpose within 2 years, for which it is granted the forest land shall resumed back to Forest Department by the Conservator of Forests by following the provisions under Section 82 of the Karnataka Forest Act 1963.
7. The user agency has to pay the cost of raising compensatory afforestation charges at the rate prevailing at the time of sanction.
8. The user agency has to pay the Net Present Value (NPV) as per the Govt. Notification No.FEE 247 FGL 2002, dated 17/01/2004 @ Rs. 5.80 to Rs. 9.20 lakhs per ha. depending upon the quantity and density of the land.
9. Any other condition imposed by the Government of India/State Government /Principal Chief Conservator of Forests, Bangalore will have to be abided by the lessee.

By order and in the name of the Governor of Karnataka,

P.R. 759

P.R. KALAVATHI

Under Secretary to Government,

Forest, Ecology and Environment Department

Sub: Transfer of lease for diversion of 36.915 ha. of forest land in Nirthadi SF, Davangere Division for establishment of 37.95 MW capacity Wind Power sanctioned in favour of M/s Chitradurga Wind Power Private Limited, Bangalore to M/s B.P.Energy India Private Limited, Mumbai.

Read:

1. Letter No.4-KRC356/2007-BAN/1051,dated:11th October 2007 of Government of India, Ministry of Environment and Forests, Regional Office,Bangalore.
2. Government Order No.FEE 35 FLL 2007, Bangalore, dated: 12.10.2007.
3. Guidelines of G.O.I. F.No.8-84/2002-FC, dated:14.05.2004 and 20.2.2006.
4. Letter No.A5(5)GFL.CR.9//06-07,dated:17.5.2008 of Principal Chief Conservator of Forests, Bangalore.
5. State Government letter No.FEE 97 FLL 2008, dated: 23.5.2008.
6. Letter No. 4-KRC356/2007-BAN/2751 dated: 25-07-2008, of Government of India, Ministry of Environment and Forests, Regional Office, Bangalore.

Preamble:

Government of India in its letter read at (1) above has accorded approval under Forest (Conservation) Act, 1980 for diversion of 36.915 ha. forest land in Nirthadi State [illegible] Davangere Division for establishment of 37.95 MW capacity Wind Power Project in favour of M/s Chitradurga Wind

Power (Pvt.) Ltd. Bangalore. Accordingly Government of Karnataka has issued Government Order read at (2) above.

The Principal Chief Conservator of Forests, Bangalore vide his letter dated:17.5.2008 read at (4) above had submitted a proposal to obtain the approval of Government of India as per the Government of India's guidelines dated:14.5.2004 and 20.02.2006(read at 3 above) issued under Forest (Conservation) Act, 1980 for transfer of lease for diversion of 36.915 ha. of forest land in Nirthadi Nirthadi SF, Davangere Division for establishment of 37.95 MW capacity Wind Power sanctioned in favour of M/s Chitradurga Wind Power Private Limited, Bangalore to M/s B.P.Energy India Private Limited, Mumbai.

The original user agency, M/s Chitradurga Wind Power (Pvt.) Ltd.Bangalore has proposed to transfer 36.915 ha. of forest area to the new user agency M/s B.P.Energy India Private Limited, Mumbai. The original user agency has submitted no objection certificate for such transfer and the new user agencies have submitted an under taking that they will abide by the conditions stipulated by Government of India and Government of Karnataka.

Accordingly the proposal was recommended to Government of India vide State Government letter dated:17.05.2008 read at (5) above.

Government of India, Ministry of Environment and Forests, Regional Office, Bangalore vide their letter dated: 25th July 2008 read at (6) above has conveyed its approval under Forest(Conservation)Act, 1980 for transfer of lease of diverted forest land of 36.915 ha. in Nirthadi SF, Davangere Division from M/s Chitradurga Wind Power Private Limited, Bangalore(the original user agency) to M/s B.P.Energy India Private Limited, Mumbai(the Investor/Power Producer) subject to the condition that M/s B.P.Energy India Private Limited, Mumbai shall abide by all the relevant conditions imposed by Central Government vide their letter dated: 11.10.2007 read at (1) above.

The proposal has been examined in detail and hence the order.

Government Order No. FEE 97 FLL 2008, Bangalore, Dated: 3rd October 2008.

In the circumstances explained above, Government are pleased to accord sanction under Section 2 of Forest(Conservation)Act, 1980 for transfer of lease of diverted forest land of 36.915 ha. in Nirthadi SF, Davangere Division from M/s Chitradurga Power Private Limited, Bangalore, (the original User agency), to M/s B.P.Energy India Private Limited, Mumbai(the Investor/Power Producer).

The transfer of lease is subject to the condition that the new User agencies, i.e., the investors/power producers, shall abide by all the conditions imposed by the Central Government/State Government/Principal Chief Consevator of Forests, for diversion of 36.915 ha. of forest land in favour of M/s B.P.Energy India Private Limited, Mumbai for establishment of 37.95 MW Wind Power Project in Nirthadi SF, Davangere Division of Karnataka.

By order and in the name of the Governor of Karnataka,

P.R.1422

P.R. KALAVATHI

Under Secretary to Government,

Forest, Ecology and Environment Department.

Sub: Diversion of 2.229 ha. of forest land in Karwar Division for laying of Optical Fibre Cable from Kadra to Kateli in favour of M/s Vodafone Essar South Limited, Bangalore.

Read:

1. Letter No.A5(2)GFL.CR.13/07-08, dated:28.2.2008 of Principal Chief Conservator of Forests, Bangalore.
2. Government of India letter No.F.No.11-9/98-FC, dated:16.10.2000, 21.11.2005 and 26.12.2007.

Preamble:

The Principal Chief Conservator of Forests, Bangalore vide his letter dated 28.02.2008 read at (1) above has submitted the proposal for diversion of 2.229 ha. of forest land under the Forest (Conservation)

Act, 1980, for laying underground Optical Fiber Cable from Kadra to Kateli in favour of M/s Vodafone Essar South Limited, Bangalore subject to certain conditions.

Government of India vide their letters cited under reference 2 above conveyed its general approval under Section 2 of Forest (Conservation) Act, 1980 for diversion of forest land for laying of optical fibre cables, telephone line and drinking water supply pipelines.

This proposal has been examined as per the general approval of Government of India in its letter dated: 16.10.2000 and it has been decided to accord sanction for diversion of 2.229 ha. of forest land under the Forest (Conservation) Act, 1980, for laying underground Optical Fiber Cable from Kadra to Kateli for laying of optical fibre cable line in favour of M/s Vodafone Essar South Limited, Bangalore.

The proposal has been examined in detail and hence the order.

Government Order No. FEE 54 FLL 2008, Bangalore, Dated: 13th November 2008.

In the circumstances explained in the preamble above and in accordance with the general approval given by Government of India in their letters dated: 16.10.2000, 21.11.2005 and 26.12.2007, Government is pleased to accord approval under Forest (Conservation) Act, 1980 for diversion of 2.229 ha. of forest land under the Forest (Conservation) Act, 1980, for laying underground Optical Fiber Cable from Kadra to Kateli for laying of optical fibre cable line in favour of M/s Vodafone Essar South Limited, Bangalore subject to the following conditions.

1. The legal status of the forest land will continue to be as forest land.
2. The land shall be utilized only for the purpose for which it is released.
3. If the land is not required for the purpose for which it is granted the same should be resumed back to the Forest Department by the Deputy Conservator of Forests under section 82 of the Karnataka Forest Act 1963.
4. The user agency has to pay the lease rent as fixed by the Government at the time of sanction and any subsequent orders in this regard.
5. The lease is granted for 20 (twenty) years.
6. The Karnataka Forest Act 1963 and Rules 1969 will be applicable for any violation.
7. The user agency has to pay the cost of raising compensatory afforestation charges at the rate prevailing at the time of sanction(at present it is Rs. 84,00.00 per ha.).
8. The user agency has to pay the Net Present Value (NPV) as per the Govt. Notification No.FEE 247 FGL 2002, dated 17/01/2004 @ Rs. 5.80 to Rs. 9.20 lakhs per ha. depending upon the quantity and density of the land.
9. Any other condition imposed by the Government of India/State Government /Principal Chief Conservator of Forests, Bangalore will have to be abided by the lessee.

By order and in the name of the Governor of Karnataka

P.R.1603

P.R. KALAVATHI

Under Secretary to Government,

Forest, Ecology and Environment Department.

PERSONNEL AND ADMINISTRATIVE REFORMS SECRETARIAT

CORRIGENDUM

No. DPAR 5 SMR 2009, Bangalore, Dated 15th April 2009

In Notification No. DPAR 6 SMR 2003, dated 3-9-2003 the words "Sagar Apollo Hospital, Bangalore" appearing at Sl.No. 18-L of the Schedule-I shall be read as "Sagar Hospitals, Jayanagar, Bangalore".

By order and in the name of the Governor of Karnataka,

PR. 1157

P. MARKANDEYA

Under Secretary to Government, Department of

Personnel and Administrative Reforms (Service Rules-2)

ಕಂದಾಯ ಸಚಿವಾಲಯ

ವಿಷಯ: ಶ್ರೀ ಸಾಜೀದ್ ಅಹ್ಮದ್ ಮುಲ್ಲಾ, ತಹಶೀಲ್ದಾರ್ ಗ್ರೇಡ್–2, ಪ್ರಸ್ತುತ ತಹಶೀಲ್ದಾರ್, ಜೋಯಿಡಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ಹಿಂದಿನ ಸೇವೆಯನ್ನು ಪರಿಗಣಿಸುವ ಕುರಿತು.

ಓದಲಾಗಿದೆ: 1. ಸರ್ಕಾರದ ಅಧಿಸೂಚನೆ ಸಂ : ಕಂಇ 110 ಎಎಸ್‌ಡಿ 2006 ದಿನಾಂಕ : 22.06.2006.

2. ಶ್ರೀ ಸಾಜೀದ್ ಅಹ್ಮದ್ ಮುಲ್ಲಾ, ತಹಶೀಲ್ದಾರ್, ಇವರ ಮನವಿ ದಿನಾಂಕ : 18.12.2006.

ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ.(1), ದಿನಾಂಕ: 22.06.2006ರ ಅಧಿಸೂಚನೆಯಲ್ಲಿ, ಶ್ರೀ ಸಾಜೀದ್ ಅಹ್ಮದ್ ಮುಲ್ಲಾ, ಇವರು ಕಂದಾಯ ಇಲಾಖೆಯ ತಹಶೀಲ್ದಾರ್ ಗುಂಪು–ಬಿ ಹುದ್ದೆಗೆ ನೇಮಕಾತಿಗೊಂಡಿರುತ್ತಾರೆ. ಸದರಿಯವರು ಈ ಹುದ್ದೆಗೆ. ಸೇರುವ ಪೂರ್ವದಲ್ಲಿ ಶಿಕ್ಷಣ ಇಲಾಖೆಯಲ್ಲಿ, ಹಿಂದಿ ಭಾಷಾ ಸಹ ಶಿಕ್ಷಕರಾಗಿ, ಸರ್ಕಾರಿ ಪ್ರೌಢ ಶಾಲೆ, ಬ್ಯಾಕೋಡು, ಸಾಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇಲ್ಲಿ 02.04.2001ರಿಂದ 05.02.2004ರವರೆಗೆ ಸಲ್ಲಿಸಿದ ಸೇವೆಯನ್ನು ಪಿಂಚಣಿ ಮಂಜೂರಾತಿಗೆ ಪರಿಗಣಿಸಲು ಕೋರಿರುತ್ತಾರೆ. ಸದರಿಯವರು ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಶಿವಮೊಗ್ಗ ಇವರ ಜ್ಞಾಪನಾ ಸಂ: ಇ1/ಗ್ರೂಪ್–ಬಿ/ಹು.ಸೇ/ಬಿಡುಗಡೆ/02/2006–07, ದಿನಾಂಕ: 23.06.2006ರನ್ವಯ ಬಿಡುಗಡೆ ಹೊಂದಿರುತ್ತಾರೆ. ಆದ್ದರಿಂದ ಶ್ರೀಯುತರು ಶಿಕ್ಷಣ ಇಲಾಖೆಯಲ್ಲಿ ದಿನಾಂಕ: 02.04.2001 ರಿಂದ 05.02.2004 ರವರೆಗೆ ಸೇವಾ ಅವಧಿಯನ್ನು ಪೂರೈಸಿದ್ದು, ಇವರ ಹಿಂದಿನ ಸೇವೆಯನ್ನು ಪರಿಗಣಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಿರುತ್ತಾರೆ.

ಶ್ರೀ ಸಾಜೀದ್ ಅಹ್ಮದ್ ಮುಲ್ಲಾ, ತಹಶೀಲ್ದಾರ್ ಇವರ ಮನವಿಯನ್ನು ಸರ್ಕಾರವು ಕೂಲಕಂಕಷವಾಗಿ ಪರಿಶೀಲಿಸಿ ಶ್ರೀಯುತರ ಮೂಲ ಸೇವಾ ಪುಸ್ತಕದಲ್ಲಿ ದಾಖಲಿಸಿರುವಂತೆ ಇವರು ಈ ಹಿಂದೆ ಶಿಕ್ಷಣ ಇಲಾಖೆಯಲ್ಲಿ, ಸಹಶಿಕ್ಷಕರಾಗಿ (ಹಿಂದಿ ಭಾಷಾ) ಸಲ್ಲಿಸಿದ್ದ ಸೇವೆ ದಿನಾಂಕ: 02.04.2001 ರಿಂದ 05.02.2004 ರವರೆಗೆ ಸೇವಾ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 224 (ಎ) ರೀತ್ಯ ಪ್ರಸ್ತುತ ಹುದ್ದೆಯ ತಹಶೀಲ್ದಾರ್ ಹುದ್ದೆಯ ನಿವೃತ್ತಿ ವೇತನಕ್ಕೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂ: ಆರ್‌ಡಿ 41 ಎಎಸ್‌ಡಿ 2007, ಬೆಂಗಳೂರು, ದಿನಾಂಕ: 21ನೇ ಮಾರ್ಚ್ 2009

ಮೇಲೆ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಸಾಜೀದ್ ಅಹ್ಮದ್ ಮುಲ್ಲಾ, ತಹಶೀಲ್ದಾರ್, ಜೋಯಿಡಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರು ಕಂದಾಯ ಇಲಾಖೆಯ ಸೇವೆಗೆ ಸೇರುವ ಪೂರ್ವದಲ್ಲಿ ಶಿಕ್ಷಣ ಇಲಾಖೆಯಲ್ಲಿ ಸಹ ಶಿಕ್ಷಕರಾಗಿ ದಿನಾಂಕ: 02.04.2001 ರಿಂದ 05.02.2004ರವರೆಗೆ ಸಲ್ಲಿಸಲಾಗಿರುವ ಸೇವೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 224(ಎ) ರೀತ್ಯ ಅವರ ಪ್ರಸ್ತುತ ತಹಶೀಲ್ದಾರ್ ಹುದ್ದೆಯ ನಿವೃತ್ತಿ ವೇತನಕ್ಕೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆ (ವೆಚ್ಚ 7–) ರವರ ಟಿಪ್ಪಣಿ ಸಂ: ಆಇ 14 ವೆಚ್ಚ–7/2008, ದಿನಾಂಕ: 07.02.2008ರ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 980

ಬಿ.ವಿ. ಚೌಕಿಮಠ

ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಸೇವೆಗಳು–3).

FINANCE SECRETARIAT

Sub: Re-appropriation of funds during the 2008-09 under the Major Head 3454 Census, Surveys & Statistics

Read: File No: ಕಸಂವಾಪ್ರ 1 ಕರಾಗೆ 09

Preamble:

In the File read at above, Kannada and Culture &Information Department has requested to re-appropriate funds under 2205-00-104-0-01-059 (P) to the extent of Rs.50.00 lakhs from savings under 3454-02-110-0-03-059 (P) for providing expenditure connected with Survey of historical records and acquisition by the Department of Archives.

The proposal has been examined and accordingly following order is issued.

G.O. No. FD 593 BRS 2008, Bangalore, Dated: 10th February 2009

Sanction is accorded for the re-appropriation of a sum of Rs.50.00 lakhs (Rupees fifty lakhs only) under the Major Head of Account 3454 Census, Surveys & Statistics during 2008-09, as per the statement appended to this order.

By Order and in the name of the Governor of Karnataka,

C. SHAMA RAO

Under Secretary to Government, Finance Department, (FR&BCC)

I -F9-B/B

K.F.C FORM 22-A (ART.308)

REAPPROPRIATION STATEMENTS TO ACCOMPANY ALL APPLICATIONS OR SANCTION TO EXPENDITURE NOT PROVIDED FOR IN THE BUDGET OR FOR ADDITIONAL ALLOTMENTS

(Rs. in lakhs)

Major, Minor, Sub & Detailed Heads of Budget (The same details must be given as in the printed Budget Estimate)	Heads of estimate proposed to be increased				Heads of estimate proposed to be reduced				Remarks (Here state fully the reasons for exceeding the allot. And for anticipating savings
	Amount as in the sanctioned Budget estimate 2007-08	Actual expenditure up-to-date	Probable expenditure during remainder of the year 2007-08	Amount of Additional Allotment required 2007-08	Amount as in the sanctioned Budget estimate 2007-08	Actual expenditure up-to-date	Probable expenditure during remainder of the year 2007-08	Amount available for re-appropriation 2007-08	
1	2	3	4	5	6	7	8	9	10
2205-00-104-0-01-059 (P)	20.00	8.50	61.50	50.00					To meet expenses connected with survey of historical records and acquisition
3454-02-110-0-03-059 (P)					100.00	-	50.00	50.00	As per the decision taken in secretaries meeting headed by the chief Secretary a sum of Rs.50.00 lakh each by the Dept. of Archives & Karnataka Gazetteer is required to be utilised.

P.R. 646

C. SHAMA RAO

Under Secretary to Government, Finance Department, (FR&CC).

ಕಂದಾಯ ಸಚಿವಾಲಯ

ವಿಷಯ: ಬೆಂಗಳೂರು ಸುತ್ತಮುತ್ತಲಿನ ಕೆಲವು ಬೆಲೆಬಾಳುವ ಸರ್ಕಾರಿ ಜಮೀನನ್ನು ವಸತಿ ಸಮುಚ್ಚಯ ನಿರ್ಮಿಸಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸುವ ಬಗ್ಗೆ - ಪರಿಷ್ಕೃತ ಆದೇಶ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ ಆರ್ ಡಿ 501 ಎಲ್ ಜಿ ಬಿ 2007, ದಿನಾಂಕ: 21/6/2007.

2) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಆಯುಕ್ತರ ಪತ್ರ ಸಂ.ಬೆಂಅಪ್ರಾ:ಅಸ:ತಾಂಸ-DD/T-390/07-08.

ಪ್ರಸ್ತಾವನೆ:

ಉಲ್ಲೇಖ (1)ರ ದಿ.21.6.2007ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಭೂ ಮಂಜೂರಾತಿ ನಿಯಮ 1969ರ ನಿಯಮ 20(1)(ಸಿ) ರನ್ವಯ ಬೆಂಗಳೂರು ಮತ್ತು ಸುತ್ತಮುತ್ತಲಿನ ಒತ್ತುವರಿ ಜಮೀನುಗಳನ್ನು ಖುಲ್ಲಾ ಪಡಿಸಿ ಇದರಲ್ಲಿ 326.18 ಎ/ಗು ಸರ್ಕಾರಿ ಜಮೀನನ್ನು ಬಡವರ್ಗದ ಜನರಿಗೆ ವಿಶೇಷ ಯೋಜನೆ ಅಡಿ ವಸತಿ ಯೋಜನೆ ರೂಪಿಸುವ ಉದ್ದೇಶಕ್ಕಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಮಂಜೂರು ಮಾಡಲಾಗಿತ್ತು.

ಉಲ್ಲೇಖಿತ (2)ರ ತಮ್ಮ ಪತ್ರದಲ್ಲಿ ಬೆಂಗಳೂರು ಪ್ರಾಧಿಕಾರವು ಉಲ್ಲೇಖ (1)ರ ಆದೇಶದಲ್ಲಿ ಮಂಜೂರಾಗಿರುವ 326.18 ಎ/ಗು ಸರ್ಕಾರಿ ಜಮೀನಿನ ಪೈಕಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಗೊಟ್ಟಿಗೆರೆ ಗ್ರಾಮದ ಸ.ನಂ.125ರಲ್ಲಿ 7.35 ಎ/ಗು ಮತ್ತು ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಉತ್ತರಹಳ್ಳಿ ಗ್ರಾಮದ ಸ.ನಂ.81 ರಲ್ಲಿ 11.11 ಎ/ಗು ಜಮೀನುಗಳನ್ನು ಪರಿಶೀಲಿಸಲಾಗಿ ಸದರಿ ಜಾಗಗಳಲ್ಲಿ ಬಹಳ ಕಠಿಣವಾದ ಬಂಡೆಗಳಿದ್ದು ಹಾಗೂ ಹಳ್ಳದಿಂದ ಕೂಡಿದ್ದು ಬೆಟ್ಟದ ಆಕಾರದಲ್ಲಿರುವುದರಿಂದ ಈ ಜಾಗಗಳು ಉದ್ದೇಶಿತ ಯೋಜನೆಯಾದ ಆರ್ಥಿಕವಾಗಿ ದುರ್ಬಲ ವರ್ಗದವರಿಗೆ ವಸತಿ ನಿರ್ಮಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಕೂಲಕರವಾಗಿರುವುದಿಲ್ಲ ಎಂದು ತಿಳಿಸಿ ಈ ಜಾಗಗಳ ಬದಲಿಗೆ ಬೇರೆ ಉತ್ತಮವಾದ ಜಾಗವನ್ನು ನೀಡಲು ಕೋರಿರುತ್ತಾರೆ ಪ್ರಸ್ತಾವನೆಯನ್ನು ಸರ್ಕಾರ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂ. ಕಂಇ 348 ಎಲ್.ಜಿ.ಬಿ. 2009, ಬೆಂಗಳೂರು, ದಿನಾಂಕ: 25ನೇ ಮೇ 2009

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಕಾರಣಗಳ ಹಿನ್ನೆಲೆಯಲ್ಲಿ ದಿ:21.6.2007ರ ಸರ್ಕಾರಿ ಆದೇಶ ಸಂಖ್ಯೆ ಆರ್ ಡಿ 501 ಎಲ್.ಜಿ.ಬಿ. 2007 ಅನ್ನು ಭಾಗಶಃ ಮಾರ್ಪಡಿಸಿ ಸದರಿ ಆದೇಶದ ಅನುಬಂಧದಲ್ಲಿನ ಸರ್ಕಾರಿ ಜಮೀನುಗಳ ಪಟ್ಟಿಯಲ್ಲಿ ಉಲ್ಲೇಖಿಸಿರುವ ಕ್ರಮಸಂಖ್ಯೆ 11 ಮತ್ತು 12ರಲ್ಲಿನ ಜಮೀನುಗಳನ್ನು ಅಂದರೆ ಬೆಂಗಳೂರು ದಕ್ಷಿಣ ತಾಲ್ಲೂಕು ಉತ್ತರಹಳ್ಳಿ ಹೋಬಳಿ, ಗೊಟ್ಟಿಗೆರೆ ಗ್ರಾಮದ ಸ.ನಂ.125ರಲ್ಲಿ 7.35 ಎ/ಗು ಮತ್ತು ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ ಉತ್ತರಹಳ್ಳಿ ಗ್ರಾಮದ ಸ.ನಂ.81ರಲ್ಲಿ 11.11 ಎ/ಗು ಇವುಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಮಂಜೂರು ಮಾಡಿರುವುದನ್ನು ರದ್ದುಪಡಿಸಿ ಸದರಿ ಸರ್ಕಾರಿ ಜಮೀನುಗಳನ್ನು ಈ ಮೂಲಕ ಸರ್ಕಾರದ ವಶಕ್ಕೆ ಪಡೆದುಕೊಳ್ಳಲಾಗಿದೆ.

ಬಿ.ಡಿ.ಎ. ಕೋರಿರುವಂತೆ ಬದಲಿ ಜಮೀನನ್ನು ನೀಡುವ ಬಗ್ಗೆ ಪ್ರತ್ಯೇಕವಾಗಿ ಪರಿಶೀಲಿಸಿ ಆದೇಶ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 1320 **ಇ. ಈಶ್ವರ್ ನಾಯಕ್**

ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಭೂ ಮಂಜೂರಾತಿ)

ವಿಷಯ: 2008-09ನೇ ಸಾಲಿನ ಲೆಕ್ಕಶೀರ್ಷಿಕೆ 2030 ಮುದ್ರಾಂಕ ಮತ್ತು ನೋಂದಣಿ ಅಡಿಯಲ್ಲಿ ಪುನರ್ ವಿನಿಯೋಗ ಮಾಡುವ ಕುರಿತು ಆದೇಶ.

ಓದಲಾಗಿದೆ: ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಪತ್ರ ಸಂಖ್ಯೆ: ಬಿಯುಡಿ 23/08-09, ದಿನಾಂಕ: 15.1.2008 / 01.01.2009.

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ:01.01.2009 ರ ಪತ್ರದಲ್ಲಿ ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರು 2008-09ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 2030 ರಡಿ ಕಟ್ಟಡ ವೆಚ್ಚ, ಸಾರಿಗೆ ವೆಚ್ಚ ಉಪ ಲೆಕ್ಕ ಶೀರ್ಷಿಕೆಗಳ ಆಯವ್ಯಯದಲ್ಲಿ ನೀಡಿರುವ ಅನುದಾನ ಸಂಪೂರ್ಣ ವೆಚ್ಚವಾಗಿದೆ. ಸದರಿ ಶೀರ್ಷಿಕೆಯಡಿ ಅನುದಾನದ ಅವಶ್ಯಕತೆಯಿರುವುದರಿಂದ, ಪುನರ್ ಹೊಂದಾಣಿಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 9 ಟಿಎಫ್‌ಪಿ 2004, ದಿನಾಂಕ: 07.04.2005 ರಂತೆ ಆಡಳಿತ ಇಲಾಖೆಯ ಕಾರ್ಯದರ್ಶಿಗಳಿಗೆ ಲೆಕ್ಕಶೀರ್ಷಿಕೆಯಡಿ ರೂ.50.00 ಲಕ್ಷದವರೆಗೂ ಪುನರ್ ಹೊಂದಾಣಿಕೆ ಮಾಡುವ ಅಧಿಕಾರವಿದ್ದು, ಈ ಅಧಿಕಾರ ವ್ಯಾಪ್ತಿಯಲ್ಲಿ ಪುನರ್ ಹೊಂದಾಣಿಕೆ ಮಾಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಕಂಇ 05 ಮುನೋಮು 2009, ಬೆಂಗಳೂರು, ದಿನಾಂಕ: 25ನೇ ಫೆಬ್ರವರಿ 2009

ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಬಾಕಿಯಿರುವ ಕಟ್ಟಡದ ಬಾಕಿ ಬಿಲ್ಲುಗಳನ್ನು ಪಾವತಿಸಲು ಮತ್ತು ವಾಹನ ದುರಸ್ಥಿ ಹಾಗೂ ಇಂಧನ ವೆಚ್ಚ ಭರಿಸಲು ಇಲಾಖೆಯ ಲೆಕ್ಕಶೀರ್ಷಿಕೆ 2030-02-102-0-00-015-ಪೂರಕ ವೆಚ್ಚ (ಯೋಜನೇತರ) ದಡಿ ಲಭ್ಯವಿರುವ ರೂ.913.20 (ರೂಪಾಯಿ ಒಂಬೈನೂರ ಹದಿಮೂರು ಲಕ್ಷದ ಇಪ್ಪತ್ತೈದು ಸಾವಿರ ಮಾತ್ರ) ಲಕ್ಷಗಳಿಂದ ರೂ.47.00 (ರೂಪಾಯಿ ನಲವತ್ತೇಳು ಲಕ್ಷಗಳು ಮಾತ್ರ) ಲಕ್ಷಗಳನ್ನು ಲೆಕ್ಕಶೀರ್ಷಿಕೆ 2030-03-001-1-00-071-ಕಟ್ಟಡ ವೆಚ್ಚ (ಯೋಜನೇತರ) ಕ್ಕೆ ಹಾಗೂ ರೂ.3.00 ಲಕ್ಷಗಳನ್ನು (ರೂಪಾಯಿ ಮೂರು ಲಕ್ಷಗಳು ಮಾತ್ರ) ಲೆಕ್ಕ ಶೀರ್ಷಿಕೆ 2030-03-001-1-00-195 ಸಾರಿಗೆ ವೆಚ್ಚ (ಯೋಜನೇತರ) ಕ್ಕೆ ಪುನರ್ ವಿನಿಯೋಗ ಮಾಡಲಾಗಿದೆ.

2) ಮರುಹೊಂದಾಣಿಕೆ ಪ್ರಪತ್ರ 22-ಎ ಕೆಎಫ್‌ಸಿ:ಅನುಚ್ಛೇದ 308 : ರ ಭರ್ತಿ ಮಾಡಿದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ.

3) ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕಂಇ 2782 ಐಎಫ್‌ಎ 09, ದಿನಾಂಕ: 22.01.2009 ರಲ್ಲಿ ನೀಡಿರುವ ಸಹಮತಿ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 09 ಟಿಎಫ್‌ಪಿ 2004, ದಿನಾಂಕ:07.04.2005 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಕೆ. ರಾಮಚಂದ್ರ

ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ನೋಂದಣಿ ಮತ್ತು ಮುದ್ರಾಂಕ)

ಪ್ರಪತ್ರ 22ಎ.ಕೆ.ಎಫ್.ಸಿ. (ಅನುಚ್ಛೇದ 308)

ವರ್ಷ 2008–09

ಆಯವ್ಯಯ ಪತ್ರದಲ್ಲಿ ಅಥವಾ ಹೆಚ್ಚಿನ ಹಣ ಹಂಚಿಕೆ (ಅಲಾಟ್‌ಮೆಂಟ್) ಗಳಲ್ಲಿ ಉಪಬಂಧ ಕಲ್ಪಿಸಿಲ್ಲದ ಎಲ್ಲಾ ವಿನಿಯೋಗಗಳಿಗೆ ಅಥವಾ ಮಂಜೂರಾತಿಗೆ ಲಗತ್ತಿಸಬೇಕಾದ ಪುನರ್ವಿನಿಯೋಗದ ವಿವರಣೆ

ಮುಂಗಡ ಪತ್ರದ ಪ್ರಧಾನ, ಚಿಕ್ಕ, ಉಪ ಮತ್ತು ವಿವರವಾದ ಶೀರ್ಷಿಕೆಗಳು	ಹೆಚ್ಚಿಸಲು ಪ್ರಸ್ತಾವಿಸಲಾದ ಅಂದಾಜು ಶೀರ್ಷಿಕೆ				ಕಡಿಮೆ ಮಾಡಲು ಪ್ರಸ್ತಾವಿಸಲಾದ ಅಂದಾಜು ಶೀರ್ಷಿಕೆ				ಷರಾ
	ಮಂಜೂರಾದ ಆಯವ್ಯಯ ಅಂದಾಜಿನಲ್ಲಿರುವ ಮೊತ್ತ (2008–09ನೇ ಸಾಲಿಗೆ)	ಈವರೆಗೆ ಆಗಿರುವ ವಾಸ್ತವಿಕ ವೆಚ್ಚ (ಎಂದರೆ) 5.12.2008	ವರ್ಷದ ಉಳಿದ ಅವಧಿಯಲ್ಲಿ ಸಂಭವನೀಯ ವೆಚ್ಚ	ಬೇಕಾದ ಹೆಚ್ಚಿನ ಅಲಾಟ್ ಮೆಂಟ್ ವಿವರ	ಮಂಜೂರಾದ ಆಯವ್ಯಯ ಅಂದಾಜ ನಲ್ಲಿರುವ ಮೊತ್ತ	ಈವರೆಗೆ ಆಗಿರುವ ವಾಸ್ತವಿಕ ವೆಚ್ಚ (ಎಂದರೆ)	ವರ್ಷದ ಉಳಿದ ಅವಧಿಯಲ್ಲಿ ಸಂಭವನೀಯ ವೆಚ್ಚ	ಪುನರ್ವಿನಿ ಯೋಗಕ್ಕೆ ಲಭ್ಯವಿರುವ ಮೊತ್ತ	ಹಣ ಹಂಚಿಕೆ (ಅಲಾಟ್‌ಮೆಂಟ್) ಮೀರಿರುವುದಕ್ಕೆ ಮತ್ತು ಉಳಿತಾಯ ನಿರೀಕ್ಷಿಸುವುದಕ್ಕೆ ಕಾರಣಗಳನ್ನು ಇಲ್ಲಿ ಪೂರ್ಣವಾಗಿ ವಿವರಿಸಬೇಕು.
1	2	3	4	5	6	7	8	9	10
2030–03–001–1–00–071–ಕಟ್ಟಡ ವೆಚ್ಚ [ಯೋಜನೇತರ]	215.28	215.28	47.00	47.00	–	–	–	–	ವಾರ್ಷಿಕ ಬಾಡಿಗೆ 262.28 ಲಕ್ಷ ಅನುದಾನ ಬೇಕಾಗಿದ್ದು, ಬಿಡುಗಡೆ ಮಾಡಿರುವ ಅನುದಾನ 215.28 ಲಕ್ಷ ಆಗಿರುವುದರಿಂದ ಕೊರತೆಯಾಗಿರುವ ಅನುದಾನವು ಬೆಂಗಳೂರು ನಗರ ಜಿಲ್ಲೆ ಉಪ ನೋಂದಣಿ ಕಛೇರಿಗಳನ್ನು ವಿಭಜಿಸಿರುವುದರಿಂದ ಬಾಡಿಗೆ ಕಟ್ಟಡದಲಿ ಕಛೇರಿಗಳು ಕಾರ್ಯನಿರ್ವಹಿಸುತ್ತಿದೆ. ಹಾಗೂ ಬಾಕಿ ಇರುವ ಕಟ್ಟಡದ ಬಿಲ್ಲನ್ನು ಪಾವತಿಸಲು ಅಧಿಕ ಅನುದಾನ ಬೇಕಾಗಿರುತ್ತದೆ.
195–ಸಾರಿಗೆ ವೆಚ್ಚ [ಯೋಜನೇತರ]	33.87	33.87	03.00	03.00	–	–	–	–	ವಾಹನ ದುರಸ್ಥಿ ಮತ್ತು ಇಂಧನ ವೆಚ್ಚ ಭರಿಸಲು ಅಧಿಕ ಅನುದಾನ ಬೇಕಾಗಿರುತ್ತದೆ.
	249.15	**249.15**	**50–00**	**50–00**	–	–	–	–	
2030–02–102–0–00–015 ಪೂರಕ ವೆಚ್ಚ [ಯೋಜನೇತರ]	•				913.2	–	863.2	50.00	ಪ್ರಸ್ತುತ ಬ್ಯಾಂಕಿನ ಮೂಲಕ (Pre-Certified Sheets) ಮಾರಾಟ ಮಾಡುತ್ತಿರುವುದರಿಂದ ಅವರಿಗೆ ಕಮಿಷನ್ ಪಾವತಿಸುವ ಸಲುವಾಗಿ ಈ ವೆಚ್ಚವನ್ನು ಆಯವ್ಯಯದಲ್ಲಿ ಅಂದಾಜು ಮಾಡಲಾಗಿತ್ತು. ಬ್ಯಾಂಕಿನಿಂದ ಹಾಳೆಗಳ ಮಾರಾಟದ ಬಗ್ಗೆ ಸರಿಯಾದ ಮಾಹಿತಿ ಬರದೇ ಇದ್ದುದರಿಂದ ಈ ಲೆಕ್ಕ ಶೀರ್ಷಿಕೆಯಲ್ಲಿ ಅನುದಾನ ಉಳಿತಾಯವಾಗಿರುತ್ತದೆ.

ಪಿ.ಆರ್. 747

ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು.

ಒಳಾಡಳಿತ ಸಚಿವಾಲಯ

ವಿಷಯ: ಶ್ರೀ ಎಂ.ಐ.ಅಸಂಗಿ, ಮಾಜಿ ಎ.ಎಸ್.ಐ. ಬಾಗಲಕೋಟೆ ಟೌನ್ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ

ಓದಲಾಗಿದೆ:
1. ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ಬಾಗಲಕೋಟೆ ಇವರ ಆದೇಶ ಸಂಖ್ಯೆ:ಸಿಬ್ಬಂದಿ–3/ಡಿಇ–7/2004 ದಿ:25.04.2005
2. ಮೇಲ್ಮನವಿ ಪ್ರಾಧಿಕಾರಿ ಹಾಗೂ ಅರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರ ಆದೇಶ ಸಂಖ್ಯೆ:ಅಪೀಲು/33/ಉವ/2005 ದಿನಾಂಕ:07.01.2006
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ: 07.06.2008
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ:ಅಪೀಲು(2)29/2008–09 ದಿನಾಂಕ: 13.10.2008

ಪ್ರಸ್ತಾವನೆ:

ಶ್ರೀ ಎಂ.ಐ.ಅಸಂಗಿ, ಇವರು ಬಾಗಲಕೋಟೆ ಟೌನ್ ಪೊಲೀಸ್ ಠಾಣೆಯಲ್ಲಿ ಅಸಿಸ್ಟೆಂಟ್ ಸಬ್–ಇನ್ಸ್‌ಪೆಕ್ಟರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಈ ಕೆಳಕಂಡ ಆರೋಪಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965ರ ನಿಯಮ 6ರಡಿ ಇಲಾಖಾ ವಿಚಾರಣೆ ನಡೆಸಲಾಗಿದೆ.

ದೋಷರೋಪಣೆ:

ಅಪಾದಿತರಾದ ಎ.ಎಸ್.ಐ. ಶ್ರೀ. ಎಂ.ಐ.ಅಸಂಗಿ, ನೀವು,

1. ದಿ: 19.02.1993 ರಂದು ಶ್ರೀ. ಶಿವಲಿಂಗಪ್ಪ ಗಿರಿಯಪ್ಪ ಸಣ್ಣಟ್ಟಿ ಹಾಗೂ ಶ್ರೀ.ಗಂಗಪ್ಪ ಮಹಾಲಿಂಗಪ್ಪ ಸಣ್ಣಟ್ಟಿ ಸಾ : ಮಹಾಲಿಂಗಪೂರ ಇವರಿಂದ ಸರ್ವೆ ನೋ: 35/02(ಬಿ)ರಲ್ಲಿ 40 ಫ್ಲಾಟ್‌ಗಳನ್ನು ರೂ.8 ಲಕ್ಷಗಳಲ್ಲಿ ನಿಮ್ಮ ಮಗ ಶ್ರೀ ವಿ.ಎಂ.ಅಸಂಗಿ, ರವರ ಹೆಸರಿನಲ್ಲಿ ಖರೀದಿ ಹಿಡಿಯುವ ಬಗ್ಗೆ ಮಾತಾಡಿ ರೂ. 2 ಲಕ್ಷಗಳನ್ನು ಮುಂಗಡ ನೀಡಿ, ಉಳಿದ ರೂ. 6 ಲಕ್ಷಗಳನ್ನು ಪ್ರತಿ 2 ತಿಂಗಳಿಗೆ ಒಂದು ಕಂತು ರೂ. 1 ಲಕ್ಷದಂತೆ ಕೊಡುವ ಬಗ್ಗೆ ರೂ.10 ರ ಬಂಡ್ ಪೇಪರ್ ಮೇಲೆ ಖರೀದಿ ಕರಾರು ಮಾಡಿ ಬಾಂಡ್ ಪೇಪರ್‌ನಲ್ಲಿ ಬಾಕಿ ಹಣ ಕೊಡುವ ಬಗ್ಗೆ ಇರುವ ಇಸವಿ ದಿನಾಂಕಗಳನ್ನು ಮೋಸ ಮಾಡುವ ಉದ್ದೇಶದಿಂದ ತಿದ್ದುಪಡಿ ಮಾಡಿ ಅದಕ್ಕೆ ನೀವು ಸಾಕ್ಷಿ ಹಾಕಿ ಮೋಸ ಮಾಡಿದ ಹಿನ್ನೆಲೆಯಲ್ಲಿ ಮಹಾಲಿಂಗಪೂರ ಪೊಲೀಸ್ ಠಾಣೆ ಗುನ್ನಾ ನಂ 26/95 ಕಲಂ 464, 465, 471, 420, 109, 193 ಐ.ಪಿ.ಸಿ ಯಲ್ಲಿ ಭಾಗಿಯಾಗಿದ್ದೀರಿ.
2. ಇಸವಿ ದಿನಾಂಕಗಳನ್ನು ತಿದ್ದುಪಡಿ ಮಾಡಿದ ಬಾಂಡ್ ಸುಳ್ಳು ಅಂತ ತಿಳಿದು ತಿಳಿದು ಹಣಕಾಸಿನ ವ್ಯವಹಾರದಲ್ಲಿ ಅದು ನಿಜ ಅಂತ ಸಾಧಿಸಲು ಹೆಚ್ಚುವರಿ ಮುನ್ಸೀಫ್ ನ್ಯಾಯಾಲಯ, ಮುದೋಳದಲ್ಲಿ ಅಸಲು ದಾವೆ ನಂ : 478/94ನೇದ್ದನ್ನು ನಿಮ್ಮ ಮಗನಿಂದ ಹೂಡಿಸಿದ್ದೀರಿ.
3. ಮೇಲಾಧಿಕಾರಿಗಳ ಗಮನಕ್ಕೆ ತರದೆ ಇಂತಹ ಆಸ್ತಿ ಖರೀದಿ ವ್ಯವಹಾರ ಮಾಡಬಾರದು ಎಂದು ನಿಯಮಗಳಿದ್ದರೂ ಸಹ ಅದನ್ನು ಗಾಳಿಗೆ ತೂರಿ, ಕೆ.ಸಿ.ಎಸ್.(ನಡತೆ) ನಿಯಮಗಳು 1966ರ ಉಪನಿಯಮ 23(2)ನೇದ್ದನ್ನು ಉಲ್ಲಂಘಿಸಿದ್ದೀರಿ.
4. ನೀವೊಬ್ಬ ಶಿಸ್ತಿನ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿದ್ದು, ವಂಚನೆ ಮಾಡುವ ದುರುದ್ದೇಶದಿಂದ ಚಾರಿತ್ರ್ಯಯ ವಧೆ ಮಾಡಿ ನಿಜವೆಂದು ಸಾಧಿಸಲು ಹೊರಟು ಸಿಕ್ಕುಬಿದ್ದು, ಪೊಲೀಸ್ ಇಲಾಖೆಗೆ ಕಳಂಕ ತರುವ ಹೀನ ಕೃತ್ಯವೆಸಗಿದ್ದೀರಿ. ಈ ರೀತಿ ನೀವು ನಿಮ್ಮ ನ್ಯಾಯ ಸಮ್ಮತವಾದ ಕರ್ತವ್ಯದಲ್ಲಿ ಘೋರ ದುರ್ನಡತೆ, ಅಶಿಸ್ತು, ನಿರ್ಲಕ್ಷ್ಯತನ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುತ್ತೀರಿ.

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧಿಕ್ಷಕರು, ಬಾಗಲಕೋಟೆ, ಇವರು ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ದಿನಾಂಕ : 25.04.2005 ರ ಆದೇಶದಲ್ಲಿ ಅರ್ಜಿದಾರರನ್ನು "ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸುವ ದಂಡನೆ ವಿಧಿಸಿರುತ್ತಾರೆ".

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಅಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 07.01.2006 ರ ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶಿಲಿಸಲಾಗಿದೆ. ಇವರ ಮೇಲಿನ ಆರೋಪವು ಸಾಬೀತಾಗಿರುತ್ತದೆ. ಪರಿಷ್ಕರಣಾ ಮೇಲ್ಮನವಿಯಲ್ಲಿ ಪರಿಗಣಿಸುವಂತಹ ಯಾವುದೇ ಹೊಸ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು

ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 03 ಪೊಸಿಅ 2009 ಬೆಂಗಳೂರು, ದಿನಾಂಕ: 21ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅದಿನಿಯಮ 1963ರ ಸೆಕ್ಷನ್ 25 ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ. ಎಂ.ಐ.ಅಸಂಗಿ, ಮಾಜಿ ಎ.ಎಸ್.ಐ. ಬಾಗಲಕೋಟೆ ಟೌನ್ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 967

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ. (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಪಿ.ಎ.ನರಸಿಂಹರಾಜು, ಎ.ಪಿ.ಸಿ–183, ಡಿ.ಎ.ಆರ್, ತುಮಕೂರು, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ:
1. ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ತುಮಕೂರು, ಇವರ ಆದೇಶ ಸಂಖ್ಯೆ:ಪನ್ನಿ/ಡಿಇ/10/2006–07 ಓ.ಬಿ:490/2007 ದಿ:23.10.07
2. ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರ ಆದೇಶ ಸಂಖ್ಯೆ: ಅಪೀಲು/51/2007–08 ಓ.ಬಿ:08/2007–08 ದಿನಾಂಕ : 16.04.2008
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ : 15.07.2008
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು (2)45/2008–09 ದಿನಾಂಕ : 30.09.08

ಪ್ರಸ್ತಾವನೆ:

ಶ್ರೀ ಪಿ.ಎ. ನರಸಿಂಹರಾಜು, ಎ.ಪಿ.ಸಿ–183, ಡಿ.ಎ.ಆರ್, ತುಮಕೂರು ಹಾಗೂ ಇತರರ ವಿರುದ್ಧ ಕರ್ತವ್ಯ ಲೋಪದ ಮೇಲೆ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿಗಳು) ನಿಯಮಾವಳಿ 1965 ರ ನಿಯಮ 6 ಮತ್ತು 8 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆಗಳಿಗೆ ಆದೇಶಿಸಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷರೋಪಣೆ :

"ದಿ: 06.07.06 ರಂದು ಬೆಳಿಗ್ಗೆ ವಿಚಾರಣಾದೀನ ಖೈದಿಗಳಾದ 1) ಶಿವಕುಮಾರ @ ಶಿವ ಬಿನ್ ರಾಮಚಂದ್ರಪ್ಪ, 23 ವರ್ಷ, ಭೋವಿ ಜನಾಂಗ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ವಿಚಾರಣಾ ಖೈದಿ ಸಂ:1575 ತುಮಕೂರು ಜಿಲ್ಲಾ ಉಪ ಕಾರಾಗೃಹ, ತುಮಕೂರು. 2) ಶ್ರೀನಿವಾಸ @ ವಾಸು ಬಿನ್ ರಾಮಚಂದ್ರಪ್ಪ, ಬೋವಿ ಜನಾಂಗ ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತಗ ಜಿಲ್ಲೆ, ವಿಚಾರಣಾ ಖೈದಿ ಸಂ:3636 ತುಮಕೂರು ಜಿಲ್ಲಾ ಉಪ ಕಾರಾಗೃಹ ತುಮಕೂರು, ರವರುಗಳನ್ನು ತುಮಕೂರು ಜಿಲ್ಲೆ ಕಾರಾಗೃಹದಿಂದ ಕೋಲಾರ ಜಿಲ್ಲೆ ಗುಡಿಬಂಡೆ ಸಿ.ಜೆ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯಕ್ಕೆ ಹಾಜರ್ ಪಡಿಸಲು ಖಲೀಮುಲ್ಲಾ ಖಾನ್, ಎ.ಎಚ್.ಸಿ–25, ರವರೊಂದಿಗೆ ನಿಮಗೆ ನೇಮಕಗೊಂಡು ಅದರಂತೆ ಸದರಿ ಖೈದಿಗಳನ್ನು ನೀವುಗಳು ತುಮಕೂರು ಕಾರಾಗೃಹದಿಂದ ಬೆಳಿಗ್ಗೆ 7.45 ಘಂಟೆಗೆ ವಶಕ್ಕೆ ತೆಗೆದುಕೊಂಡು ಬೆಂಗಾವಲಿನೊಂದಿಗೆ ಕರೆದುಕೊಂಡು ಹೋಗಿ ಗುಡಿಬಂಡೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯಕ್ಕೆ ಹಾಜರ್‌ಪಡಿಸಿ ಅಲ್ಲಿಂದ ವಾಪಸ್ಸು ತುಮಕೂರಿಗೆ ಬರಲು ನೇರವಾಗಿ ಬಸ್ಸು ಇದ್ದರೂ ಸಹ ಅದರಲ್ಲಿ ಬರದೆ ಖಾಸಗಿ ಬಸ್ಸಿನಲ್ಲಿ ಗೌರಿಬಿದನೂರಿಗೆ ಆರೋಪಿಗಳೊಂದಿಗೆ ಬಂದು ಗೌರಿಬಿದನೂರಿನಿಂದ ತುಮಕೂರು ಬಸ್ಸುಗಳು ಇಲ್ಲದಿದ್ದರೆ ಗೌರಿಬಿದನೂರು ಠಾಣೆಯಲ್ಲಿಯೇ ಆರೋಪಿಗಳನ್ನು ರಾತ್ರಿ ಸುರಕ್ಷಿತ ಬಂದನದಲ್ಲಿರಿಸಿಕೊಂಡು ಬೆಳಿಗ್ಗೆ ತುಮಕೂರಿಗೆ ಬರಬಹುದಾಗಿತ್ತು. ಈ ರೀತಿ ಮಾಡದೆ ಆರೋಪಿಗಳ ಜೊತೆ ಸೇರಿಕೊಂಡು ಅವ ಹಣದಲ್ಲಿಯೆ ಮದ್ಯಪಾನ ಮಾಡಲು ಅವಕಾಶ ನೀಡಿ ಅವರ ಜೊತೆ ಊಟಮಾಡಿ ಅವರಿಗೆ ಕೈಬೇಡಿಗಳನ್ನು ಹಾಕದೆ ಗೌರಿಬಿದನೂರಿನಿಂದ ಮಧುಗಿರಿಗೆ ಲಾರಿಯಲ್ಲಿ ಆರೋಪಿಗಳನ್ನು ಕೂರಿಸಿಕೊಂಡು ಬಂದಿದ್ದು, ವ್ಯವಸ್ಥಿತ ರೀತಿಯಲ್ಲಿ ನಿಯಮಾನುಸಾರ ಬೆಂಗಾವಲು ಮಾಡದೆ ಕರ್ತವ್ಯದಲ್ಲಿ ನಿರ್ಲಕ್ಷತೆ ತೋರಿಸಿದ್ದರಿಂದ ಅತ್ಯಂತ ಪ್ರಮುಖ ಕೇಸಿನ ವಿಚಾರಣ ಖೈದಿ ಶ್ರೀನಿವಾಸ @ ವಾಸು ಮಧುಗಿರಿಯಲ್ಲಿ ಬೆಂಗಾವಲಿನಿಂದ ತಪ್ಪಿಸಿಕೊಳ್ಳಲು ಕಾರಣರಾಗಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ತುಮಕೂರು, ಇವರು ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ 23.10.07 ರ ಆದೇಶದಲ್ಲಿ ಅರ್ಜಿದಾರರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ತದನಂತರ ವಾರ್ಷಿಕ ವೇತನ ಬಡ್ತಿಗಳಿಗೆ ದಕ್ಕೆಯಾಗದಂತೆ 3 ವರ್ಷಗಳ ಕಾಲ ಮುಂದೂಡಿ ದಿ: 11.07.06 ರಿಂದ 02.12.2006ರ ವರೆಗಿನ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೆ ಪರಿಗಣಿಸಿ ಆದೇಶಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶಿಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರಿಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾವ ದಿನಾಂಕ: 16.04.2008ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಹೊಸ ಸಮರ್ಥನೀಯ ಅಂಶಗಳು ಯಾವುದೂ ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ. ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ:ಒಇ 223 ಪೊಸಿಅ 2008, ಬೆಂಗಳೂರು, ದಿನಾಂಕ: 21ನೇ ಫೆಬ್ರವರಿ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಪಿ.ಎ. ನರಸಿಂಹರಾಜು, ಎ.ಪಿ.ಸಿ.-183, ಡಿ.ಎ.ಆರ್. ತುಮಕೂರು ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 969

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ. (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಎಂ. ಕುಮಾರ್, ಪಿ.ಸಿ 72, ತಲಕಾಡು, ಪೊಲೀಸ್ ಠಾಣೆ, ಮೈಸೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ

ಓದಲಾಗಿದೆ:

1. ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಮೈಸೂರು ಇವರ ಆದೇಶ ಸಂಖ್ಯೆ:ಇ/ 12/04-05 ಓ.ಬಿ:ಸಿವಿಲ್/112/05-06 ದಿನಾಂಕ: 07.08.2006
2. ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರ ಆದೇಶ ಸಂಖ್ಯೆ:ಅಪೀಲು:09/2006-07 ದಿನಾಂಕ: 05.03.07
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ : 06.02.2008
4. ಮಹಾ ನಿರ್ದೇಶಕರು ಮತ್ತು ಅರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)109/2007-08 ದಿನಾಂಕ: 20.02.2008
5. ಕರ್ನಾಟಕ ಲೋಕ ಸೇವಾ ಆಯೋಗದ ಪತ್ರ ಸಂಖ್ಯೆ:ಪಿಎಸ್‌ಸಿ 10 ಸಿಎನ್‌ಎಸ್ 08 ದಿನಾಂಕ: 01.12.2008

ಪ್ರಸ್ತಾವನೆ:

ಶ್ರೀ ಎಂ. ಕುಮಾರ್, ಪಿ.ಸಿ. 72, ತಲಕಾಡು, ಪೊಲೀಸ್ ಠಾಣೆ, ಮೈಸೂರು ಜಿಲ್ಲೆ, ಇವರು ಟಿ.ಎನ್.ಪುರ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಇವರ ವಿರುದ್ಧ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರುವ ಸಂಬಂಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಿಯಮಗಳು) ನಿಯಮಾವಳಿ 1965ರ ನಿಯಮ 6ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷರೋಪಣೆ :

"ಇವರು ಶ್ರೀಮತಿ ವಿಜಯಲಕ್ಷ್ಮಿ ಬಿನ್ ಖಾದ್ರಿ ನರಸಪ್ಪ, ಮಧುಗಿರಿ, ತುಮಕೂರು ಜಿಲ್ಲೆ, ಇವರನ್ನು ವಿವಾಹವಾಗಿ ಮದುವೆ ಸಂದರ್ಭದಲ್ಲಿ ನೀಡಿದ್ದ ವರದಕ್ಷಿಣೆ ಸಾಲದೆಂದು ಇನ್ನೂ ಹೆಚ್ಚಿಗೆ ಹಣ ತೆಗೆದುಕೊಂಡು ಬಾ ಎಂದು ಆಕೆಯನ್ನು ಆಗಾಗ್ಗೆ ಪೀಡಿಸಿ ಹಿಂಸಿಸುತ್ತಿದ್ದುದಲ್ಲದೇ ದಿನಾಂಕ:24.04.02 ರಂದು ರಾತ್ರಿ ತವರು ಮನೆಯಲ್ಲಿದ್ದ ಆಕೆಯನ್ನು ಕತ್ತು ಹಿಸುಕಿ ಕೊಲೆ ಮಾಡಿ ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರುವ ಸಂಬಂಧ"

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾದಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಪೊಲೀಸ್ ಅಧೀಕ್ಷಕರು, ಮೈಸೂರು, ಇವರು ಮೆಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ: 07.08.2006ರ ಆದೇಶದಲ್ಲಿ "ಅರ್ಜಿದಾರರ ವೇತನವನ್ನು ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಯ ಕನಿಷ್ಠ ವೇತನಕ್ಕೆ ಇಳಿಸಿ ವಾರ್ಷಿಕ ವೇತನ ಬಡ್ತಿಯನ್ನು ಹೊಸದಾಗಿ ಸಂಪಾದಿಸತಕ್ಕದ್ದು ಹಾಗೂ ಅಮಾನತ್ತಿನಲ್ಲಿದ್ದ ಅವಧಿ ದಿ: 25.04.2002 ರಿಂದ 03.03.05ನ್ನು ಅಮಾನತ್ತಿನ ಅವಧಿಯೆಂದು ಪರಿಗಣಿಸುವ ದಂಡನೆಯನ್ನು ವಿಧಿಸಿರುತ್ತಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರು ಮೇಲ್ಮನವಿಯಲ್ಲಿ ಪರಿಗಣಿಸಬಹುದಾದಂತಹ ಯಾವುದೇ ಅಂಶಗಳಿಲ್ಲವೆಂದು ಅರ್ಜಿದಾರರ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ದಿನಾಂಕ: 05.03.07 ರ ಆದೇಶದಲ್ಲಿ ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿದೆ. ಆದ್ದರಿಂದ, ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯಕ್ಕೆ ಕಂಡು ಬರುತ್ತಿಲ್ಲ. ಆದರೆ ಶಿಸ್ತು ಪ್ರಾಧಿಕಾರದ ದಂಡನಾದೇಶವು ತಾಂತ್ರಿಕ ದೋಷಪೂರಿತವಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 59(1)(ಎ)ರ ಪ್ರಕಾರ ದಂಡನಾವಧಿಯನ್ನು ನಿಗದಿಪಡಿಸಬೇಕಾಗಿದ್ದು ಈ ಬಗ್ಗೆ ಕರ್ನಾಟಕ ಲೋಕ ಸೇವಾ ಆಯೋಗದ ಸಹಮತಿಯನ್ನು ಓದಲಾದ (5)ರ ಪತ್ರದಲ್ಲಿ ಪಡೆದು ಪರಿಷ್ಕರಣ ಮೇಲ್ಮನವಿಯನ್ನು ಭಾಗಶಃ ಪುರಸ್ಕರಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ:ಒಇ 69 ಪೊಸಿಅ 2008, ಬೆಂಗಳೂರು, ದಿನಾಂಕ: 13ನೇ ಮಾರ್ಚ್ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಅಧಿನಿಯಮ 1963ರ ಸೆಕ್ಷನ್ 25(2)(ಬಿ) ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಂ. ಕುಮಾರ್, ಪಿ.ಸಿ.72, ತಲಕಾಡು, ಪೊಲೀಸ್ ಠಾಣೆ, ಮೈಸೂರು ಜಿಲ್ಲೆ, ಇವರ ವೇತನವನ್ನು ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಯ ವೇತನ ಶ್ರೇಣಿಯ ಕನಿಷ್ಠ ವೇತನಕ್ಕೆ 5 ವರ್ಷಗಳ ಕಾಲ ಇಳಿಸಲಾಗಿದೆ. ಸದರಿ ದಂಡನಾವಧಿ ಮುಗಿದ ನಂತರ ಅವರ ವೇತನವನ್ನು ದಂಡನಾದೇಶದ ಹಿಂದಿನ ದಿನ ಪಡೆಯುತ್ತಿದ್ದ ವೇತನಕ್ಕೆ ನಿಗದಿಪಡಿಸಿ ಹೊಸದಾಗಿ ವೇತನ ಬಡ್ತಿಯನ್ನು ಪಡೆಯತಕ್ಕದ್ದು ಹಾಗೂ ಇವರ ಅಮಾನತ್ತಿನ ಅವಧಿ ದಿ: 25.04.2002 ರಿಂದ 03.03.05 ರವರೆಗಿನ ಅಮಾನತಿನ ಅವಧಿಯನ್ನು ಅಮಾನತೆಂದೇ ಪರಿಗಣಿಸಿ ಆದೇಶಿಸಿದೆ.

ಕರ್ನಾಟಕೆ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 973

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ. (ಪೊಲೀಸ್ ಸೇವೆಗಳು)

ವಿಷಯ: ಶ್ರೀ ಟಿ.ಪಿ.ಶಿವಕುಮಾರ, ಪ್ರೊಬೇಷನರಿ ಡಿವೈ.ಎಸ್.ಪಿ, ಅರಸೀಕೆರೆ ಉಪ ವಿಭಾಗ ರವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ: ಡಿಜಿ ಮತ್ತು ಐಜಿಪಿ, ಬೆಂಗಳೂರು ರವರ ಪತ್ರ ಸಂಖ್ಯೆ:ಸಿಬಿ(5)/67/08–09 ದಿನಾಂಕ 13.01.2009, 29.01.2009 ಮತ್ತು 20.03.2009

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ ಶ್ರೀ ಟಿ.ಪಿ.ಶಿವಕುಮಾರ, ಪ್ರೊಬೇಷನರಿ ಡಿವೈ.ಎಸ್.ಪಿ ರವರು ಅರಸೀಕೆರೆ ಉಪ ವಿಭಾಗದಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಾಗಿನಿಂದಲೂ ಅಕ್ರಮ ಹಣ ಸಂಪಾದನೆಯಲ್ಲಿ ತೊಡಗಿ ಸಾರ್ವಜನಿಕರಿಗೆ ಕಿರುಕುಳ ನೀಡುತ್ತಿರುವುದು, ಗಣ್ಯ ವ್ಯಕ್ತಿಗಳ ಮೇಲೆ ಇಲ್ಲಸಲ್ಲದ ಆರೋಪ ಹೊರಿಸಿ ಪ್ರಕರಣಗಳನ್ನು ದಾಖಲಿಸುವುದು, ಮರಳು ಲಾರಿ ಸಾಗಾಣಿಕೆದಾರರಿಂದ ಅಕ್ರಮ ಸಂಭಾವನೆ ಪಡೆಯುತ್ತಿರುವುದಾಗಿ ಪೊಲೀಸ್ ಅಧೀಕ್ಷಕರು, ಹಾಸನ ಜಿಲ್ಲೆ ರವರು ದಿನಾಂಕ 10.01.2009/15.01.2009 ರಲ್ಲಿ ವರದಿ ಮಾಡಿರುತ್ತಾರೆ ಹಾಗೂ ಹೆಚ್ಚುವರಿ ಸೂಪರಿಂಟೆಂಡೆಂಟ್ ಆಫ್ ಪೊಲೀಸ್, ಹಾಸನ ಜಿಲ್ಲೆ ರವರು ಈ ದೂರುಗಳ ಬಗ್ಗೆ ಪೂರ್ವಭಾವಿ ವಿಚಾರಣೆ ಮಾಡಿದ ವರದಿಯಿಂದ ಆರೋಪವು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಶ್ರೀ ಟಿ.ಪಿ.ಶಿವಕುಮಾರ, ಪ್ರೊಬೇಷನರಿ ಡಿವೈ.ಎಸ್.ಪಿ, ರವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಗೊಳಿಸಿ ದಿನಾಂಕ 13.01.2009 ರಂದು ಆದೇಶ ಹೊರಡಿಸಲಾಗಿರುತ್ತದೆ. ಮುಂದುವರೆದು, ಸದರಿ ಅಧಿಕಾರಿಗಳು ಅಮಾನತ್ತು ಆದೇಶ ಸ್ವೀಕರಿಸದೇ ದಿನಾಂಕ 13.01.2009 ರ ಸಂಜೆಯಿಂದ ಕರ್ತವ್ಯಕ್ಕೆ ಅನಧಿಕೃತವಾಗಿ ಗೈರು ಹಾಜರಾಗಿರುವುದಲ್ಲದೆ ಸರ್ಕಾರಿ ರಿವಾಲ್ವರ್, ವಾಕಿ ಟಾಕಿಗಳನ್ನು ಹಿಂದಿರುಗಿಸಿರುವುದಿಲ್ಲ. ಕಛೇರಿಯ ಕಾರ್ಯಭಾರವನ್ನು ಸಹ ವಹಿಸಿಕೊಡದೆ ಮೇಲಾಧಿಕಾರಿಗಳ ಅನುಮತಿ ಪಡೆಯದೆ ಕೇಂದ್ರ ಸ್ಥಾನದಿಂದ ನಾಪತ್ತೆಯಾಗಿ ಪೊಲೀಸ್ ಅಧಿಕಾರಿಗಳಿಗೆ ತಕ್ಕದಲ್ಲದ ರೀತಿಯಲ್ಲಿ ವರ್ತಿಸಿ ಅನಧಿಕೃತವಾಗಿ ಕರ್ತವ್ಯಕ್ಕೆ ಗೈರು ಹಾಜರಾಗಿರುವುದರಿಂದ ಶ್ರೀಯುತರನ್ನು ಕೆ.ಸಿ.ಎಸ್ (ಪ್ರೊಬೇಷನರಿ) ನಿಯಮಗಳು 1977ರ ನಿಯಮ 6 ರಡಿಯಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ವಜಾಗೊಳಿಸುವಂತೆ ಡಿಜಿ ಮ್ತು ಐಜಿಪಿ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 28 ಪೊಸಿಪ 2009, ಬೆಂಗಳೂರು, ದಿನಾಂಕ: 21ನೇ ಮಾರ್ಚ್ 2009

ಪ್ರಸ್ತಾಪನೆಯಲ್ಲಿ ವಿವರಿಸಿದಂತೆ ಶ್ರೀ ಟಿ.ಪಿ.ಶಿವಕುಮಾರ, ಪ್ರೊಬೇಷನರಿ ಡಿವೈ.ಎಸ್.ಪಿ ಅರಸೀಕೆರೆ ಉಪ ವಿಭಾಗ (ಪ್ರಸ್ತುತ ಸೇವೆಯಿಂದ ಅಮನತ್ತಿನಲ್ಲಿರುವ) ಇವರ ವಿರುದ್ಧದ ಆರೋಪಗಳ ಬಗ್ಗೆ ಸತ್ಯಾಸತ್ಯತೆಯನ್ನು ಕಂಡುಕೊಳ್ಳಲು ಕೆ.ಎಸ್.ಪಿ (ಡಿಪಿ) ನಿಯಮಗಳು, 1965ರ ನಿಯಮ 6 ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ಐ.ಜಿ.ಪಿ (ಪಿ.ಸಿ.ಡಬ್ಲ್ಯೂ) ಎಸ್.ಸಿ.ಆರ್.ಬಿ. ರವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಈ ಸಂಬಂಧ ಆರೋಪಿತ ಪೊಲೀಸ್ ಅಧಿಕಾರಿಗಳ ವಿರುದ್ಧದ ದೋಷಾರೋಪಣಾ ಪಟ್ಟಿಯನ್ನು ಹೊರಡಿಸಲಾಗಿದೆ. ವಿಚಾರಣೆಯನ್ನು ನಿಯಮಾನುಸಾರ ನಡೆಸಿ ಮೂರು ತಿಂಗಳೊಳಗಾಗಿ ಮುಕ್ತಾಯಗೊಳಿಸಿ, ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಕಳುಹಿಸಿಕೊಡಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 974

ಟಿ.ಎನ್.ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ. (ಪೊಲೀಸ್ ಸೇವೆಗಳು)

KA / BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೪	ಬೆಂಗಳೂರು, ಗುರುವಾರ, ಜೂನ್ ೧೧, ೨೦೦೯ (ಜ್ಯೇಷ್ಠ ೨೧, ಶಕ ವರ್ಷ ೧೯೩೧)	ಸಂಚಿಕೆ ೨೪

ಭಾಗ – ೨

ನೇಮಕಗಳು, ಸ್ಥಳ ನೇಮಕಗಳು, ವರ್ಗಾವಣೆಗಳು, ರಜೆ ಮತ್ತು ಅಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯದ ಅಧಿಸೂಚನೆಗಳು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 14 ಸೇಇಮು 2008, ಬೆಂಗಳೂರು, ದಿನಾಂಕ: 14ನೇ ಮೇ 2009

ಶ್ರೀ ಜಿ. ಗುರುಪ್ರಸಾದ್, ಮುಖ್ಯ ಇಂಜಿನಿಯರ್, ಇವರನ್ನು ಬೆಂಗಳೂರು ಮೆಟ್ರೋ ರೈಲ್ವೆ ಕಾರ್ಪೋರೇಷನ್ ಲಿಮಿಟೆಡ್, ಮೆಟ್ರೋ (ಬಿಎಂಆರ್‌ಸಿಎಲ್), ಇಲ್ಲಿಗೆ ಸ್ಥಳ ನಿಯುಕ್ತಿಗೊಳಿಸಲು ಅವರ ಸೇವೆಯನ್ನು ನಗರಾಭಿವೃದ್ಧಿ ಇಲಾಖೆಯ ವಶಕ್ಕೆ ನೀಡಿದೆ ದಿನಾಂಕ:1.4.2009ರ ಸಮಸಂಖ್ಯೆಯ ಅಧಿಸೂಚನೆಯನ್ನು ರದ್ದುಪಡಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಅವರನ್ನು ಮುಖ್ಯ ಇಂಜಿನಿಯರ್, ಕಾರ್ಯಾಚರಣೆ ಮತ್ತು ನಿರ್ವಹಣೆ ವಲಯ, ನಾರಾಯಣಪುರ, ಗುಲ್ಬರ್ಗಾ ಜಿಲ್ಲೆ ಇಲ್ಲಿನ ಖಾಲಿ ಹುದ್ದೆಗೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 619

ಎಂ.ಎಸ್. ಶಿವರಾಮ್

ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

(ಸೇವೆಗಳು– 3)

PERSONNEL AND ADMINISTRATIVE REFORMS SECRETARIAT

NOTIFICATION

No: DPAR 390 SAS 2008, Bangalore, dated: 5th May, 2009

The following IAS officers borne on Karnataka Cadre are promoted to officiate in the Junior Administritive Grade of IAS viz., in the scale of Pay Band-3 Rs. 15600-39100+GP 7600 with effect from the dates shown against their names.

Sl. No	Name of the Officer	Designation	w.e.f.
1	Sri G. Ramachandra (KN 98)	Director of aAfgriculture Marketing	1-2-2007
2	Sri R.K. Raju (KN 98)	Deputy Commissioner, Bangalore Rural District	1.2.2007
3	Sri P.S. Vastrad (KN 98)	Deputy Commissioner Haveri District	1-2-2007
4	Sri B. Shivappa (KN 98)	Deputy Commissioner Bellary District	1.2.2007

5	Sri M.K. Baladeva Krishna (KN 98)	Deputy Commissioner ,Kodagu District	1-2-2007
6	Sri M.E. Shivalingamurthy (KN 98)	Director of mines & Geology	1-2-2007
7	Sri T.A. Parthasarathy (KN 99)	Director of Technical Education	1-1-2008
8	Dr .V. Chandrasekar (KN99)	Deputy Secretary to Government, Revenue Department	1-1-2008

By order and in the name of the Governor of Karnataka

K.G. ANANTHA

P.R. 612

Under Secretary to Government

Department of Personnel and Administrative Reforms (Services-I)

NOTIFICATION

No: DPAR 215 SAS 2009, Bangalore, dated: 7th May, 2009

The Managing Director, Karnataka Road Development Corporation Limited, Bangalore is placed in additional charge of the post of Chief Project Officer, Karnataka State Highways improvement Project, Bangalore with immediate effect and until further orders.

By order and in the name of the Governor of Karnataka

K.G. ANANTHA

P.R. 613

Under Secretary to Government

Department of Personnel and Administrative Reforms (Services-I)

ಇಂಧನ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಎನ್ 24 ಸಮನ್ವಯ 2009, ಬೆಂಗಳೂರು, ದಿನಾಂಕ: 13ನೇ ಮೇ 2009

ಮಾಹಿತಿ ಹಕ್ಕು ಕಾಯ್ದೆ 2005 ರ (2005ರ ಕೇಂದ್ರ ಕಾಯ್ದೆ ಸಂಖ್ಯೆ:22) ಅಡಿಯಲ್ಲಿ ಕರ್ನಾಟಕ ಸರ್ಕಾರದ ಸಚಿವಾಲಯದ ಇಂಧನ ಇಲಾಖೆಯನ್ನು 'ಸಾರ್ವಜನಿಕ ಪ್ರಾಧಿಕಾರ'ವೆಂದು ಗುರುತಿಸಲಾಗಿದೆ.

ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(1) & (2)ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಇಂಧನ ಇಲಾಖೆಗೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿಗಳನ್ನು "ಸಾರ್ವಜನಿಕ ಮಾಹಿತಿ ಅಧಿಕಾರಿ' ಹಾಗೂ 'ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ' ಎಂದು ನೇಮಕ ಮಾಡಲಾಗಿದೆ.

ಶಾಖೆ	ಸಾರ್ವಜನಿಕ ಮಾಹಿತಿ ಅಧಿಕಾರಿ ಸೆಕ್ಷನ್ 5(1)	ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ ಸೆಕ್ಷನ್ 5(2)
ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಕಛೇರಿ	ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ಕೊಠಡಿ ಸಂಖ್ಯೆ:237, 2ನೇ ಮಹಡಿ, ವಿಕಾಸೌಧ, ಬೆಂಗಳೂರು–1	ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಶಾಖೆಯ ಹಿರಿಯ ಸಹಾಯಕರು ಇಂಧನ ಇಲಾಖೆ, ಕೊಠಡಿ ಸಂಖ್ಯೆ:237, 2ನೇ ಮಹಡಿ, ವಿಕಾಸ ಸೌಧ, ಬೆಂಗಳೂರು–1
ಸ್ವೀಮರ & ಸಮನ್ವಯ ಶಾಖೆ	ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ, ಕೊಠಡಿ ಸಂಖ್ಯೆ:240,. 2ನೇ ಮಹಡಿ, ವಿಕಾಸ ಸೌಧ, ಬೆಂಗಳೂರು–1	ಶಾಖಾಧಿಕಾರಿ, ಸ್ವೀಮರ & ಸಮನ್ವಯ ಶಾಖೆ ಇಂಧನ ಇಲಾಖೆ, ಕೊಠಡಿ ಸಂಖ್ಯೆ:240, 2ನೇ ಮಹಡಿ ವಿಕಾಸ ಸೌಧ ಬೆಂಗಳೂರು–1
ವಿದ್ಯುತ್ ಯೋಜನೆ ಶಾಖೆ	ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ, ಕೋಠಡಿ ಸಂಖ್ಯೆ:240, 2ನೇ ಮಹಡಿ, ವಿಕಾಸ ಸೌಧ ಬೆಂಗಳೂರು–1	ಶಾಖಾಧಿಕಾರಿ, ವಿದ್ಯುತ್ ಯೋಜನೆ ಶಾಖೆ ಇಂಧನ ಇಲಾಖೆ, ಕೊಠಡಿ ಸಂಖ್ಯೆ:240,2ನೇ ಮಹಡಿ ವಿಕಾಸ ಸೌಧ ಬೆಂಗಳೂರು–1

ವಿದ್ಯುಚ್ಛಕ್ತಿ ಶಾಖೆ	ಪೀಠಾಧಿಕಾರಿ, ವಿದ್ಯುಚ್ಛಕ್ತಿ ಶಾಖೆ, ಇಂಧನ ಇಲಾಖೆ, ಕೊಠಡಿ, ಸಂಖ್ಯೆ:240,2ನೇ ಮಹಡಿ, ವಿಕಾಸಸೌಧ, ಬೆಂಗಳೂರು-1	ಸಹಾಯಕ ವಿದ್ಯುಚ್ಛಕ್ತಿ ಶಾಖೆ, ಇಂಧನ ಇಲಾಖೆ, ಕೊಠಡಿ ಸಂಖ್ಯೆ:240, 2ನೇ ಮಹಡಿ, ವಿಕಾಸ ಸೌಧ, ಬೆಂಗಳೂರು-1

ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 19(1)ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರದ ಉಪ ಕಾರ್ಯದರ್ಶಿ' ಇಂಧನ ಇಲಾಖೆ ಇವರನ್ನು ಇಂಧನ ಇಲಾಖೆಗೆ ಸಂಬಂಧಿಸಿದಂತೆ 'ಮೇಲ್ಮನವಿ ಪ್ರಾಧಿಕಾರ' ಎಂದು ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 620

ಎಸ್.ಜಿ. ಸಂಪತ್ ಕುಮಾರ್

ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 78 ಆಸೇವ 2009, ಬೆಂಗಳೂರು, ದಿನಾಂಕ: 19ನೇ ಮೇ 2009

ಶ್ರೀ ಆರ್. ರಮೇಶಪ್ಪ ಕೆ.ಎ.ಎಸ್ (ಆಯ್ಕೆ ಶ್ರೇಣಿ)ಅಧಿಕಾರಿ, ಹಾಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,. ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಬೆಂಗಳೂರು, ಇವರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ರೂ. 26250-36500ರ ವೇತನ ಶ್ರೇಣಿಯ ಕೆ.ಎ.ಎಸ್ (ಸೂಪರ್ ಟೈಂ ಸ್ಕೇಲ್) ವೃಂದಕ್ಕೆ ಸ್ಥಾನಪನ್ನರಾಗಲು ಬಡ್ತಿ ನೀಡಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಯನ್ನು ಸೂಪರ್ ಟೈಂ ಸ್ಕೇಲ್ ವೃಂದಕ್ಕೆ ಉನ್ನತೀಕರಿಸಿ ಅದೇ ಹುದ್ದೆಯಲ್ಲಿಯೇ ಮುಂದುವರಿಸಲು ಇವರ ಸೇವೆಯನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವಶದಲ್ಲಿಯೇ ಮುಂದುವರಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 621

ಎಚ್.ಆರ್. ನಾಗೇಂದ್ರ

ಸರ್ಕಾರದ ಅಧೀನ ಕಾರ್ಯದರ್ಶಿ,

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು- 2)

ಸೇರ್ಪಡೆ ಆದೇಶ

ಸಂಖ್ಯೆ: ಸಿಆಸುಇ 30 ಸಅಸೇ 2009, ಬೆಂಗಳೂರು, ದಿನಾಂಕ: 16ನೇ ಮೇ 2009

ಶ್ರೀ ಸುರೇಶ್ ಕಲ್ಲಪ್ಪ ಅಳಗುಂಡಿ, ವ್ಯವಸ್ಥಾಪಕರು, ದಿ. ಬೆಳಗಾಂ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿ., ಬೆಳಗಾವಿ ಇವರನ್ನು ಮಾನ್ಯ ತೋಟಗಾರಿಕೆ ಹಾಗೂ ಬಂಧೀಖಾನೆ ಸಚಿವರ ಆಪ್ತ ಕಾರ್ಯದರ್ಶಿ ಹುದ್ದೆಗೆ ನೇಮಿಸಲಾಗಿದ್ದ ಅಧಿಸೂಚನೆ ಸಂಖ್ಯೆ:ಸಿಆಸುಇ 30 ಸಅಸೇ 2009ರಲ್ಲಿನ 5ನೇ ಸಾಲಿನಲ್ಲಿ "ಅಲ್ಲಿಯವರೆಗೆ" ನಂತರ "ಗುತ್ತಿಗೆ ಆಧಾರದಲ್ಲಿ" ಎಂದು ಸೇರಿಸಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 622

ಎಂ.ಎಸ್. ಶಿವರಾಮ್

ಸರ್ಕಾರದ ಅಧೀನ ಕಾರ್ಯದರ್ಶಿ,

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು- 3)

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ತಿದ್ದುಪಡಿ

ಸಂಖ್ಯೆ: ಕಸಂವಾಪ್ರ 9 ಪ್ರವಾನಿ 2009, ಬೆಂಗಳೂರು, ದಿನಾಂಕ: 5ನೇ ಮೇ 2009

ಸರ್ಕಾರದ ಅಧಿಸೂಚನೆ ಸಂಖ್ಯೆ:ಕಸಂವಾಪ್ರ 9 ಪ್ರವಾನಿ 2009, ದಿನಾಂಕ:24.2.2009ರ ಅಧಿಸೂಚನೆಯ ಎರಡನೇ ಪಂಕ್ತಿಯಿಂದ ತಾಜ್ ಕರ್ನಾಟಕ ಹೋಟೆಲ್ ಅಂಡ್ ರೆಸಾರ್ಟ್ಸ್ ಲಿಮಿಟೆಡ್‌ನ ನಿರ್ದೇಶಕರ ಮಂಡಳಿಗೆ ಎಂಬ ಪದಗಳ ನಂತರ "ಶ್ರೀ ಸುಬೀರ್ ಹರಿಸಿಂಗ್, ಭಾ.ಆ.ಸೇ., ಈ ಹಿಂದಿನ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ,ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ ಇವರ ಸ್ಥಾನದಲ್ಲಿ "ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 623

ಎಸ್. ನಾರಾಯಣಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ

ಒಳಾಡಳಿತ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಒಇ 552 ಪಿಪಿಇ 2008, ಬೆಂಗಳೂರು, ದಿನಾಂಕ: 20ನೇ ಮೇ 2009

ಶ್ರೀ ಆನಂದ್ ಎಂ. ಹೊಸಮನಿ, ಸಹಾಯಕ ಸರ್ಕಾರಿ ಅಭಿಯೋಜಕರು ಸಿ.ಜೆ (ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಅಂಕೋಲ ಇವರಿಗೆ ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳ ನಿಯಮ 32ರ ಅನುಸಾರ ದಿನಾಂಕ:25.7.2008ರಿಂದ ಪೂರ್ವಾನ್ವಯವಾಗುವಂತೆ ರೂ. 14050–350–14400–400–16800–450–19500–525–22650–600–25050ರ ವೇತನ ಶ್ರೇಣಿಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಯ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಸ್ವತಂತ್ರ ಪ್ರಭಾರದಲ್ಲಿರಿಸಿ, ಸಹಾಯಕ ಅಭಿಯೋಗ ನಿರ್ದೇಶಕರು, ಅಭೀಯೋಗ ಉಪನಿರ್ದೇಶಕರ ಕಛೇರಿ, ಮೈಸೂರು ಇಲ್ಲಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಸ್ಥಳನಿಯುಕ್ತಿಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 625

ಕೆ.ಸಿ. ಸಿದ್ದಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ

(ಕಾನೂನು ಮತ್ತು ಸುವ್ಯವಸ್ಥೆ, ಕಾಫಿಪೋಸಾ ಮತ್ತು ಅಭಿಯೊಗಗಳು)

ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ವಾಕೈ 04 ಜಕೈಸೇ 2009, ಬೆಂಗಳೂರು, ದಿನಾಂಕ: 20ನೇ ಮೇ 2009

ಕೈಮಗ್ಗ ಮತ್ತು ಜವಳಿ ಇಲಾಖೆಯ ಈ ಕೆಳಕಂಡ ಸಹಾಯಕ ನಿರ್ದೇಶಕರುಗಳಿಗೆ ಉಪ ನಿರ್ದೇಶಕರ ಹುದ್ದೆಯ ವೇತನ ಶ್ರೇಣಿ ರೂ. 18150–26925 ರಲ್ಲಿ ಸ್ಥಾನಪನ್ನ ಆಧಾರದ ಮೇಲೆ ಬಡ್ತಿ ನೀಡಿ ತಕ್ಷಣದಿಂದ ಜಾರಿಗೆ ಬರುವಂತೆ ಅವರ ಹೆಸರಿನ ಮುಂದೆ ಸೂಚಿಸಿರುವ ಸ್ಥಳಗಳಿಗೆ ನೇಮಿಸಲಾಗಿದೆ.

ಕ್ರಸಂ	ಹೆಸರು ಮತ್ತು ಹಾಲಿ ಸೇವೆ ಸಲ್ಲಿಸುತ್ತಿರುವ ಸ್ಥಳ	ನಿಯುಕ್ತಿಗೊಳಿಸಿದ ಹುದ್ದೆ ಹಾಗೂ ಸ್ಥಳ
1	ಶ್ರೀ ಪಿ.ಡಿ. ಪನ್ನೀರ ಸೆಲ್ವಂ, ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಮೈಸೂರು	ಖಾಲಿ ಇರುವ ಉಪ ನಿರ್ದೇಶಕರ ಹುದ್ದೆ ಕೈಮಗ್ಗ ಮತ್ತು ಜವಳಿ ಇಲಾಖೆ, ಕೋಲಾರ
2	ಶ್ರೀ ಜಿ.ಪಿ. ಶ್ರೀನಿವಾಸಮೂರ್ತಿ ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ತುಮಕೂರು	ಉಪ ನಿರ್ದೇಶಕರು (ಬಂಡವಾಳ), ಕೈಮಗ್ಗ ಮತ್ತು ಜವಳಿ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 626

ಎಂ.ಎಸ್. ಗಣಪತಿ

ಸರ್ಕಾರದ ಉಪ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

ಅಧಿಸೂಚನೆ ಸಂಖ್ಯೆ: ವಾಕೈ 18 ರೇಉನಿ 2009, ಬೆಂಗಳೂರು, ದಿನಾಂಕ: 20ನೇ ಮೇ 2009

ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ಆರ್ಟಿಕಲ್ ಆಫ್ ಅಸೋಸಿಯೇಷನ್‌ನ ಆರ್ಟಿಕಲ್ 8(ಎ)ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಡಾ: ಸುಭಾಷ್ ಭರಣಿ ಇವರನ್ನು ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ನಿರ್ದೇಶಕರ ಮಂಡಳಿಗೆ ನಿರ್ದೇಶಕರನ್ನಾಗಿ ಹಾಗೂ ಸದರಿ ಆರ್ಟಿಕಲ್ ಆಫ್ ಅಸೋಸಿಯೇಷನ್‌ನ ಆರ್ಟಿಕಲ್ 17ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಇವರನ್ನು ಸದರಿ ನಿಗಮದ ಅಧ್ಯಕ್ಷರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ ಮತ್ತು ಇವರಿಗೆ ಸಚಿವ ಸಂಪುಟ ದರ್ಜೆಯ ಸ್ಥಾನಮಾನ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 627

ಭಾರತಿ ಆರ್. ನಾಯಕ್

ಪೀಠಾಧಿಕಾರಿ (ರೇಷ್ಮೆ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

ಕರ್ನಾಟಕ ವಿಧಾನ ಸಭೆ ಸಚಿವಾಲಯ

ಅಧಿಸೂಚನೆ ಸಂಖ್ಯೆ: ಕವಿಸಸ/ಆ–1/17/ನಿಯೋ/2009, ಬೆಂಗಳೂರು, ದಿನಾಂಕ: 13ನೇ ಏಪ್ರಿಲ್ 2009

ಶ್ರೀಮತಿ ಹೆಚ್.ಎಸ್. ಸವಿತ, ಸಹಾಯಕ ಅಭಿಯಂತರರು, ಸಣ್ಣ ನೀರಾವರಿ ಇಲಾಖೆ, ಮೈಸೂರು ಇವರನ್ನು ಅವರದೇ ಆದ ವೇತನ ಮತ್ತು ವೇತನ ಶ್ರೇಣಿ ಹಾಗೂ ಜೊತೆಗೆ ಲಭ್ಯವಿರುವ ವಿಶೇಷ ವೇತನದೊಂದಿಗೆ ದಿನಾಂಕ:15.1.2009

ರಿಂದ ಜಾರಿಗೆ ಬರುವಂತೆ ಹಾಗೂ ವಿಧಾನಸಭೆಯ ಮಾನ್ಯ ಸರ್ಕಾರಿ ಮುಖ್ಯ ಸಚೇತಕರು ಇವರ ಸೇವೆಯನ್ನು ಇಚ್ಚಿಸುವವರೆಗೆ ಅಥವಾ ಹಾಲಿ ವಿಧಾನಸಭೆಯ ಮಾನ್ಯ ಸರ್ಕಾರಿ ಮುಖ್ಯ ಸಚೇತಕರ ಪದಾವಧಿಯವರೆಗೆ ಇವರನ್ನು ನಿಯೋಜನೆ ಆಧಾರದ ಮೇರೆಗೆ ಸದರಿಯವರ ಆಪ್ತ ಶಾಖೆಯಲ್ಲಿನ ಒಂದು ಗ್ರೂಪ್ "ಸಿ" ದರ್ಜೆಯ ಹುದ್ದೆಯನ್ನು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ತಾತ್ಕಾಲಿಕವಾಗಿ ಗ್ರೂಪ್ "ಬಿ" ದರ್ಜೆಯ ಹುದ್ದೆಗೆ ಉನ್ನತೀಕರಿಸಿ ವಿಧಾನ ಸಭೆಯ ಮಾನ್ಯ ಸರ್ಕಾರಿ ಮುಖ್ಯ ಸಚೇತಕರ ವಿಶೇಷ ಕರ್ತವ್ಯಾಧಿಕಾರಿಯಾಗಿ ನೇಮಿಸಲಾಗಿದೆ.

ಸಭಾಧ್ಯಕ್ಷರ ಆದೇಶಾನುಸಾರ

ಪಿ.ಆರ್. 628

ಹಚ್.ಎಸ್. ಜಗನ್ನಾಥ್

ಅಧೀನ ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಸಚಿವಾಲಯ

ನಗರಾಭಿವೃದ್ಧಿ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ನಅಇ 68 ನಯೋಸೇ 2009, ಬೆಂಗಳೂರು, ದಿನಾಂಕ: 19ನೇ ಮೇ 2009

ನಗರ ಯೋಜನಾ ಸದಸ್ಯರು, ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರ, ಹೊಸಪೇಟೆ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ನಗರ ಯೋಜನಾ ಸದಸ್ಯರ ಕರ್ತವ್ಯದ ಜೊತೆಗೆ ಹಂಪಿ ವಿಶ್ವ ಪರಂಪರೆ ಪ್ರದೇಶಾಭಿವೃದ್ಧಿ ನಿರ್ವಹಣಾ ಪ್ರಾಧಿಕಾರದ ನಗರ ಯೋಜನಾ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಕಾರ್ಯ ನಿರ್ವಹಿಸಲು ಅಧಿಕ ಪ್ರಭಾರದಲ್ಲಿಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 629

ಎಸ್.ಎನ್. ಕೃಷ್ಣಕುಮಾರ್

ಸರ್ಕಾರದ ಅಧೀನ ಕಾರ್ಯದರ್ಶಿ,

ನಗರಾಭಿವೃದ್ಧಿ ಇಲಾಖೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆಕುಕ 184 ಎಂಎಸ್ಎಸ್ 2008, ಬೆಂಗಳೂರು, ದಿನಾಂಕ: 19ನೇ ಮೇ 2009

ಡಾ: ಸುಮೇದಾ ಆರ್. ದೇಸಾಯಿ, ಸಹ ನಿರ್ದೇಶಕರು, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ, ಬೆಂಗಳೂರು, ಇವರಿಗೆ ಇವರಿಗಿಂತ ಸೇವಾ ಜೇಷ್ಠತೆಯಲ್ಲಿ ಕಿರಿಯವರಾದ ಡಾ: ವಾಸನ್‌ಕರ್ ಉಷಾ ಧನಂಜಯ, ಇವರಿಗೆ ಅಪರ ನಿರ್ದೇಶಕರಾಗಿ ಮುಂಬಡ್ತಿ ನೀಡಿದ ದಿನಾಂಕ:27/5/2008 ರಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ (ಆರ್.ಪಿ.ಪಿ.ಪಿ) ನಿಯಮಾವಳಿಗಳ ನಿಯಮ 2(1)(ಎ) ರನ್ವಯ ಪೂರ್ವಾನ್ವಯವಾಗಿ ವೇತನ ಶ್ರೇಣಿ ರೂ. 24450–31800 ರ ಅಪರ ನಿರ್ದೇಶಕರ ಹುದ್ದೆಗೆ ಮುಂಬಡ್ತಿ ನೀಡಿ, ಅಪರ ನಿರ್ದೇಶಕರು, (ಉಪ ಯೋಜನಾಡಳಿತಾಧಿಕಾರಿ), ಕೆ.ಹೆಚ್.ಎಸ್.ಡಿ.ಆರ್.ಪಿ., ಬೆಂಗಳೂರು ಈ ಹುದ್ದೆಗೆ ನೇಮಿಸಿದೆ ಹಾಗೂ ಸದರಿಯವರನ್ನು ನಿರ್ದೇಶಕರು, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ, ಬೆಂಗಳೂರು ಈ ಹುದ್ದೆಯಲ್ಲಿ ಮುಂದಿನ ಆದೇಶದವರೆಗೆ ಪ್ರಭಾರಿಯಾಗಿ ಮುಂದುವರೆಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 630

ಪದ್ಮಾವತಿ

ಸರ್ಕಾರದ ಅಧೀನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಅಧಿಸೂಚನೆ ಸಂಖ್ಯೆ: ಆಕುಕ 453 ಎಂಎಸ್ಎಸ್ 2008, ಬೆಂಗಳೂರು, ದಿನಾಂಕ: 19ನೇ ಮೇ 2009

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ಸಹನಿರ್ದೇಶಕರ ವೃಂದದ ಅಧಿಕಾರಿಗಳಿಗೆ ರೂ. 24450–31800/– ವೇತನ ಶ್ರೇಣಿಯ ಅಪರ ನಿರ್ದೇಶಕರ ಹುದ್ದೆಗೆ ಪದೋನ್ನತಿ ನೀಡಿ, ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರ ಹೆಸರಿನ ಮುಂದೆ ಸೂಚಿಸಿರುವ ಸ್ಥಳಕ್ಕೆ ನಿಯುಕ್ತಿಗೊಳಿಸಿ ನೇಮಿಸಿದೆ.

ಕ್ರ.ಸಂ	ಅಧಿಕಾರಿಯ ಹೆಸರು, ಪದನಾಮ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳ	ಮುಂಬಡ್ತಿ ಮೇಲೆ ನೇಮಿಸಲಾದ ಹುದ್ದೆ/ಸ್ಥಳ
1	ಡಾ:ಎಸ್. ಪ್ರಕಾಶ್ ಸಹನಿರ್ದೇಶಕರು (ವೈದ್ಯಕೀಯ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು	ಅಪರ ನಿರ್ದೇಶಕರು ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಬೆಂಗಳೂರು

2	ಡಾ: ವಿ.ಡಿ. ಪಾಲೇಕರ್ ಸಹನಿರ್ದೇಶಕರು (ಹೆಚ್.ಇ.ಟಿ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು	ಅಪರ ನಿರ್ದೇಶಕರು (ಪ್ರಾಥಮಿಕ ಆರೋಗ್ಯ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು
3	ಡಾ:ಮೋಹನ್ ರಾಜ್ ಸಹನಿರ್ದೇಶಕರು (ಆರ್.ಸಿ.ಹೆಚ್) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು	ಅಪರ ನಿರ್ದೇಶಕರು (ಆರ್.ಸಿ.ಹೆಚ್) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 631 ಪದ್ಮಾವತಿ

ಸರ್ಕಾರದ ಅಧೀನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

PERSONNEL AND ADMINISTRATIVE REFORMS SECRETARIAT

NOTIFICATION

No: DPAR 165 SAS 2009, Bangalore, dated: 18th May, 2009

Sri K. Amaranarayana, IAS (KN 96), Managing Director, Hutti Gold Mines limited Bangalore is placed in concurrent charge of the post of managing Director, Bio-fuel Board, Bangalore with immediate effect and until further orders.

By order and in the name of the Governor of Karnataka

K.G. ANANTHA

P.R. 632 Under Secretary to Government

Department of Personnel and Administrative Reforms (Services-I)

NOTIFICATION No: DPAR 222 SAS 2009, Bangalore, dated: 18th May, 2009

Sri Arvind Srivastava, IAS (KN 94), Managing Director, Karnataka Urban Infrastructure Development & Finance Corporation, Bangalore is placed in additional charge of the post of Commissioner DULT, Bangalore with immediate effect and until further orders reliving Sri Gaurav Gupta, IAS of additional charge.

By order and in the name of the Governor of Karnataka

K.G. ANANTHA

P.R. 633 Under Secretary to Government

Department of Personnel and Administrative Reforms (Services-I)

ಒಳಾಡಳಿತ ಸಚಿವಾಲಯ

ಅಧಿಸೂಚನೆ ಸಂಖ್ಯೆ: ಒಇ 193 ಪೊಸಿಪ 2008, ಬೆಂಗಳೂರು, ದಿನಾಂಕ: 18ನೇ ಮೇ 2009

ಸರ್ಕಾರದ ಅಧಿಸೂಚನೆ ಸಂಖ್ಯೆ:ಒಇ 193 ಪೊಸಿಪ 2008 ದಿನಾಂಕ:2.3.2009ರಲ್ಲಿ ಶ್ರೀ ಎಫ್.ಬಿ. ರೇವಣ್ಣವರ್, ಸಹಾಯಕ ಕಮಾಂಡೆಂಟ್ ಇವರಿಗೆ ಕಮಾಂಡೆಂಟ್ ಹುದ್ದೆಗೆ ಬಡ್ತಿ ನೀಡಿದ್ದ ಕಮಾಂಡೆಂಟ್, 3ನೇ ಪಡೆ, ಕೆ.ಎಸ್.ಆರ್.ಪಿ., ಬೆಂಗಳೂರು ಹುದ್ದೆಯ ಸ್ಥಳ ನಿಯುಕ್ತಿಯನ್ನು ಮಾರ್ಪಡಿಸಿ ಇಂಡಿಯಾ ರಿಸರ್ವ್ ಬೆಟಾಲಿಯನ್, ಮುನಿರಾಬಾದ್, ಕೊಪ್ಪಳ ಇಲ್ಲಿ ಖಾಲಿ ಇರುವ ಡೆಪ್ಯೂಟಿ ಕಮಾಂಡೆಂಟ್ ಹುದ್ದೆಗೆ ಸಾರ್ವಜನಿಕ ಹಿತದೃಷ್ಟಿಯಿಂದ, ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.

ಈ ಅಧಿಸೂಚನೆಯನ್ನು ಚುನಾವಣಾ ಆಯೋಗವು ದಿನಾಂಕ:14.5.2009ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 635 ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ,

ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

PERSONNEL AND ADMINISTRATIVE REFORMS SECRETARIAT

NOTIFICATION

No: DPAR 11SFP 2008, Bangalore, dated: 18th May, 2009

The Governement of India, Ministry of Environment and Forests (IFS II section), New Delhis Notification No. 17013/08/2008-IFS-II, dated 18th may 2009 is republished hereunder:

(To be published in part-I section 2 in the gazette of India)

No. 17013/08/2008-IFS-II

Government of India

Ministry of Environment and Forests

Paryavaran Bhavan CGO Complex

Lodhi Road, New Delhi-110 003.

Dated:18.5.2009

NOTIFICATION

In exercise of the powers conferred sub-Rule (1) of Rule 8 of the Indian Forest Service (Recruitment) Rules, 1966 read with sub-regulation (1) of Regulation 9 of the Indian Forest Service (Appointment by Promotion)Regulation, 1966, the President is pleased to appoint with effect from 14th May 2009, the following two officers of the State Forest Service of Karnataka to the Indian Forest Service on the basis of Select list for the year 2007 and allocate them to Karnataka Cadre of Indian Forest Service under sub-rule (1) of Rule 5 of the Indian Forest Service (Cadre) Rules 1966.

Sl.No	Name (Shri)	Date of Birth
1	Devaraj N (SC)	28.4.1957
2	Prakash. S. Netalkar	25.7.1963

Joseph Luikham

Under Secretary to Government of India

The Officers are continued in the present posts as indicated below until further orders:

1. Shri Devaraj. N. IFS Deputy Conservator of Forests and Scientific officer Forest, Ecology and Environment Department M.S. Building Bangalore.

2. Shri Prakash S. Netalkar, IFS Deputy Conservator of Forests Social Forestry Division Zilla Panchayath, Udupi.

By order and in the name of the Governor of Karnataka

ASHOK P. ATRE

Under Secretary to Government

Department of Personnel and Administrative Reforms (Services-IV)

P.R. 636

ಸಾರಿಗೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ:ಸಾರಿಇ 29 ಸಾಸಂಸೇ 2009(I), ಬೆಂಗಳೂರು, ದಿನಾಂಕ:28ನೇ ಮೇ 2009

ಅಧಿಸೂಚನೆ ಸಂಖ್ಯೆ:ಸಿಆಸುಇ 145 SPS, 2008, ದಿನಾಂಕ:25.5.2009ರಲ್ಲಿ ಶ್ರೀ ಸುನೀಲ್ ಅಗರವಾಲ್, ಭಾ.ಪೋಸೆ., ಇವರನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು, ಇಲ್ಲಿಗೆ ಶ್ರೀ ಜಿ.ಎಂ. ಹಯಾತ್, ಭಾ.ಪೋ.ಸೆ., ಇವರ ವರ್ಗಾವಣೆಯಿಂದ ತೆರವಾಗಿರುವ ಸ್ಥಾನದಲ್ಲಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಮತ್ತು

ನಿರ್ದೇಶಕರು (ಸಿಬ್ಬಂದಿ ಮತ್ತು ಪರಿಸರ) ಆಗಿ ನೇಮಿಸಲು ಇವರ ಸೇವೆಯನ್ನು ಸಾರಿಗೆ ಇಲಾಖೆಯ ವಶಕ್ಕೆ ನೀಡಲಾಗಿದೆ.

ಅದರಂತೆ ಶ್ರೀ ಸುನೀಲ್ ಅಗರವಾಲ್,. ಭಾ.ಪೋ.ಸೆ., ಇವರನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು ಇಲ್ಲಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಮತ್ತು ನಿರ್ದೇಶಕರು (ಸಿಬ್ಬಂದಿ ಮತ್ತು ಪರಿಸರ) ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಮರುನಿಯುಕ್ತಿಗೊಳಿಸಿ ನಿಯೋಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 657

ಕೆ.ಎಸ್. ಶ್ರೀಧರ್

ಸರ್ಕಾರದ ಅಧೀನ ಕಾರ್ಯದರ್ಶಿ,

ಸಾರಿಗೆ ಇಲಾಖೆ

ಅಧಿಸೂಚನೆ

ಸಂಖ್ಯೆ:ಸಾರಿಇ 29 ಸಾಸಂಸೇ 2009(II), ಬೆಂಗಳೂರು, ದಿನಾಂಕ:28ನೇ ಮೇ 2009

ಅಧಿಸೂಚನೆ ಸಂಖ್ಯೆ:ಸಿಆಸುಇ 145 SPS, 2008, ದಿನಾಂಕ:25.5.2009ರಲ್ಲಿ ಶ್ರೀ ಜೆ. ಅರುಣ್ ಚಕ್ರವರ್ತಿ, ಭಾ.ಪೋಸೆ., ಇವರನ್ನು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು ಇಲ್ಲಿಗೆ ಶ್ರೀ ಪಿ.ಎಸ್ ಸಂಧು, ಭಾ.ಪೋ.ಸೆ., ಇವರ ವರ್ಗಾವಣೆಯಿಂದ ತೆರವಾಗಿರುವ ಸ್ಥಾನದಲ್ಲಿ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಮತ್ತು ನಿರ್ದೇಶಕರು (ಭದ್ರತೆ ಮತ್ತು ಜಾಗೃತಿ) ಆಗಿ ನೇಮಿಸಲು ಇವರ ಸೇವೆಯನ್ನು ಸಾರಿಗೆ ಇಲಾಖೆಯ ವಶಕ್ಕೆ ನೀಡಲಾಗಿದೆ.

ಅದರಂತೆ ಶ್ರೀ ಜೆ. ಅರುಣ್ ಚಕ್ರವರ್ತಿ, ಭಾ.ಪೋ.ಸೇ., ಇವರನ್ನು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು ಇಲ್ಲಿ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಮತ್ತು ನಿರ್ದೇಶಕರು (ಭದ್ರತೆ ಮತ್ತು ಜಾಗೃತಿ)ಆಗಿ ನೇಮಿಸಲಾಗಿದೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಮರುನಿಯುಕ್ತಿಗೊಳಿಸಿ ನಿಯೋಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 658

ಕೆ.ಎಸ್. ಶ್ರೀಧರ್

ಸರ್ಕಾರದ ಅಧೀನ ಕಾರ್ಯದರ್ಶಿ,

ಸಾರಿಗೆ ಇಲಾಖೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ:ಆಕುಕ 178 ಸಿಜಿಇ 2008, ಬೆಂಗಳೂರು, ದಿನಾಂಕ:30ನೇ ಮೇ 2009

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಶ್ರೀ ಎಸ್.ಎನ್. ನಂಜುಂಡಯ್ಯ, ಹಿರಿಯ ರಸಾಯನ ಶಾಸ್ತ್ರಜ್ಞರು, ವಿಭಾಗೀಯ ಸಾರ್ವಜನಿಕ ವಿಶ್ಲೇಷಕರು ಮತ್ತು ವಲಯ ಸಹಾಯಕ ರಾಸಾಯನ ಪರೀಕ್ಷಕರು, ಮೈಸೂರು ವಿಭಾಗ, ಮೈಸೂರು ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇವರನ್ನು ವೇತನ ಶ್ರೇಣಿ ರೂ 18,150–26,925 ರಲ್ಲಿ ಮುಖ್ಯ ರಸಾಯನ ಶಾಸ್ತ್ರಜ್ಞರ ಹುದ್ದೆಗೆ ಬಡ್ತಿ ನೀಡಿ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸಾರ್ವಜನಿಕ ಆರೋಗ್ಯ ಸಂಸ್ಥೆ, ಶೇಷಾದ್ರಿ ರಸ್ತೆ, ಬೆಂಗಳೂರು ಇಲ್ಲಿ ಖಾಲಿ ಇರುವ ಹುದ್ದೆಗೆ ನೇಮಕ ಮಾಡಲಾಗಿದೆ.

ನೇಮಕಾತಿ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾದ ಬಗ್ಗೆ ಸರ್ಕಾರಕ್ಕೆ ಹಾಗೂ ಸಂಬಂಧಪಟ್ಟವರಿಗೆ ಸಿಟಿಸಿ ಪ್ರತಿಗಳನ್ನು ಕಳುಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 664

ಕೆ.ಎಸ್. ಸರೋಜಮ್ಮ

ಸರ್ಕಾರದ ಅಧೀನ ಕಾರ್ಯದರ್ಶಿ,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

KA / BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೪	ಬೆಂಗಳೂರು, ಗುರುವಾರ, ಜೂನ್ ೧೧, ೨೦೦೯ (ಜೇಷ್ಠ ೨೧, ಶಕ ವರ್ಷ ೧೯೩೧)	ಸಂಚಿಕೆ ೨೪

ಭಾಗ–೩

ಸರ್ಕಾರದ ಆಯಾ ಇಲಾಖೆಗಳ ಮುಖ್ಯಸ್ಥರ ಮತ್ತು ಸ್ಥಳೀಯ ಪ್ರಾಧಿಕಾರಿಗಳಿಗೆ ಸಂಬಂಧಿಸಿದ ಅಧಿಸೂಚನೆಗಳು

ಅಧಿಕೃತ ಅಧಿಕಾರಿಗಳು ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನ್ಯಾಯಾಲಯದಲ್ಲಿ

ಸಂಖ್ಯೆ: ಎಸ್‌ಡಿಕೆ/344/ಡಿಟಿಸಿಆರ್/2006–07, ದಿನಾಂಕ:22ನೇ ಡಿಸೆಂಬರ್, 2008

ಉಪಸ್ಥಿತರು: ನೂರ್‌ಮಹಮ್ಮದ್ ಹುಸೇನ್
ಅಧಿಕೃತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಫಿರ್ಯಾದುದಾರರು:	ಆರೋಪಿಗಳು:
ಪೊಲೀಸ್ ಉಪ ನಿರೀಕ್ಷಕರು, ಮಂಗಳೂರು ದಕ್ಷಿಣ ಪೊಲೀಸ್ ಠಾಣೆ, ಮಂಗಳೂರು.	1) ಹರೀಶ್ ಬಿನ್ ಶೇಖರ, ಮಜಲ್‌ಹೌಸ್, ಹೊಸಂಗಡಿ, ಮಜೇಶ್ವರ, ಕಾಸರಗೋಡು, ಕೇರಳರಾಜ್ಯ ಹೊಸಂಗಡಿ, ಮಂಜೇಶ್ವರ, ಕಾಸರಗೋಡು, ಕೇರಳ ಮತ್ತು ಇತರ ಇರ್ವರು ಆರೋಪಿಗಳು.

ಪ್ರಕರಣದ ಮುಖ್ಯಾಂಶಗಳು:

ಪೊಲೀಸ್ ಉಪ ನಿರೀಕ್ಷಕರು, ಮಂಗಳೂರು ದಕ್ಷಿಣ ಪೊಲೀಸ್ ಠಾಣೆ, ಮಂಗಳೂರು ಇವರು ದಿನಾಂಕ:14.06.2005 ರಂದು ಕಾರೊಂದರಲ್ಲಿ ಅಕ್ರಮವಾಗಿ ಸಾರಾಯಿ ಸ್ಯಾಚೇಟುಗಳನ್ನು ಕೇರಳ ರಾಜ್ಯಕ್ಕೆ ಸಾಗಾಟ ಮಾಡಲಾಗುತ್ತಿಥೆ ಎಂದು ದೊರೆತ ಖಚಿತ ವರ್ತಮಾನದ ಮೇರೆಗೆ ಅಪರಾಹ್ನ 15–20 ಸಮಯಕ್ಕೆ ತಮ್ಮ ಸಿಬ್ಬಂದಿ ಮತ್ತು ಪಂಚರೊಂದಿಗೆ ಮಂಗಳೂರು ನಗರದ ಮಾರ್ಗನ್‌ಗೇಟ್ಸ್ ಬಳಿ ಮಹಾಕಾಳಿಪಡ್ಪು ಎಂಬಲ್ಲಿ ರೈಲ್ವೆ ಓವರ್ ಬ್ರಿಡ್ಜ್‌ನ ಮುಂಭಾಗದಲ್ಲಿ ರಸ್ತೆಗಾವಲು ಮಾಡುತ್ತಿರುವಾಗ, ಮಾಹಿತಿಯೆಂತೆ ಕೆಎ–19–ಎಂ–4629 ನಂಬರ್ ಪ್ಲೇಟು ಅಳವಡಿಸಲಾಗಿರುವ ಮಾರುತಿ 800 ಕಾರು ಬರುವುದನ್ನು ಗಮನಿಸಿ, ಸದರಿ ಕಾರನ್ನು ತಡೆದು ನಿಲ್ಲಿಸಿ, ಸಿಬ್ಬಂದಿಯವರು ಸುತ್ತುವರಿದು ಕಾರನ್ನು ಪರಿಶೀಲಿಸಿದಾಗ, ಕಾರಿನ ಒಳಗೆ ಒಬ್ಬ ವ್ಯಕ್ತಿ ಚಾಲಕನ ಸೀಟಿನಲ್ಲಿ ಕುಳಿತಿರುವುದು ಕಂಡುಬಂತು. ಆತನನ್ನು ವಿಚಾರಿಸಿದಾಗ ತನ್ನ ಹೆಸರು ಹರೀಶ್ ಬಿನ್ ಶೇಖರ್, ಮಜಲ್‌ಮನೆ, ಹೊಸಂಗಡಿ, ಮಂಜೇಶ್ವರ ಕೇರಳ ರಾಜ್ಯ ಎಂದು ತಿಳಿಸಿ ಸದರಿ ಸಾರಾಯಿ ಸಾಗಾಟದ ಬಗ್ಗೆ ಯಾವುದೇ ರಹದಾರಿ ಪತ್ರ ಇರುವುದಿಲ್ಲವೆಂದು, ಸಾರಾಯಿಯನ್ನು ಸುಧೀರ್‌ಯಾನೆ ಕಬ್ಬಡಿ ಅಲಿಯಾಸ್ ಎಂಬವರ ಮೂಲಕ ಎಸ್.ಜಿ.ಬಿ. ಗ್ರೂಪಿನ ಮ್ಯಾನೇಜರ್ ಆಗಿರುವ ಶಿವರಾಮ ಎಂಬ ವ್ಯಕ್ತಿಯು ಅಕ್ರಮವಾಗಿ ಕೇರಳ ರಾಜ್ಯಕ್ಕೆ ಸಾಗಾಟ ಮಾಡಲು ನೀಡಿರುವುದಾಗಿಯೂ ತಿಳಿಸಿರುತ್ತಾನೆ. ನಂತರ ಕಾರನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ ಕಾರಿನ ಒಳಗಡೆ ಒಟ್ಟು 14 ಪ್ಲಾಸ್ಟಿಕ್ ಚೀಲಗಳಲ್ಲಿ ಸಾರಾಯಿ ತುಂಬಿಸಿರುವುದು ಕಂಡುಬಂದು, ಅವುಗಳನ್ನು ಬಿಚ್ಚಿನೋಡಲಾಗಿ ಅವುಗಳ ಪೈಕಿ 13 ಪ್ಲಾಸ್ಟಿಕ್ ಚೀಲಗಳಲ್ಲಿ 100 ಎಂಎಲ್‌ನ ತಲಾ 500 ಸ್ಯಾಚೇಟುಗಳಂತೆ ಒಟ್ಟು 6,500 ಸಾರಾಯಿ ಸ್ಯಾಚೇಟುಗಳು

ಮತ್ತು ಇನ್ನೊಂದು ಚೀಲದಲ್ಲಿ 400 ಸ್ಯಾಚೇಟುಗಳು ಇದ್ದು ಈ ರೀತಿಯಾಗಿ ಒಟ್ಟು 6,900 ಸಾರಾಯಿ ಸ್ಯಾಚೇಟುಗಳು ಮತ್ತು ವ್ಯಕ್ತಿಯ ಬಳಿ ನೋಕಿಯೋ ಕಂಪೆನಿ ಮೊಬೈಲ್ ಫೋನ್ ಇರುವುದನ್ನು ಪತ್ತೆ ಹಚ್ಚಿ, ಸದರಿ ಸಾರಾಯಿ ಸಾಗಾಟ ಮಾಡಲು ಯಾವುದೇ ದಾಖಲಾತಿಗಳು ಸದರಿ ಕಾರಿನಲ್ಲಿ ಪತ್ತೆಯಾಗದೇ ಇದ್ದು, ಇದು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32, 34ರ ಪ್ರಕಾರ ಶಿಕ್ಷಾರ್ಹವಾಗಿರುವುದರಿಂದ, ಸದರಿ ಸೊತ್ತುಗಳನ್ನು ಪಂಚರ ಸಮಕ್ಷಮ ಜಪ್ತುಮಾಡಿ, ಸ್ಥಳದಲ್ಲಿಯೇ ಮಹಜರನ್ನು ತಯಾರಿಸಿ, ಕಾರಿನಲ್ಲಿದ್ದ ವ್ಯಕ್ತಿಗಳಾದ (1) ಹರೀಶ್ ಬಿನ್ ಶೇಖರ, ಮಜಲ್ ಹೌಸ್, ಹೊಸಂಗಡಿ ಮಂಜೇಶ್ವರ, ಕಾಸರಗೋಡು ಕೇರಳ ರಾಜ್ಯ (2) ಸುಧೀರ್ ಅಲಿಯಾಸ್ ಕಬಡಿ ಸುಧೀರ್ (ವಿಳಾಸ ಪತ್ತೆಯಾಗಿಲ್ಲ) (3) ಶಿವರಾಮ (ವಿಳಾಸ ಪತ್ತೆಯಾಗಿಲ್ಲ) ಇವರುಗಳ ವಿರುದ್ಧ ತಕ್ಷೀರು ಸಂಖ್ಯೆ: 205/2005, ದಿನಾಂಕ:14.06.2005ರಂದು ಮೊಕದ್ದಮೆಯನ್ನು ದಾಖಲಿಸಿಕೊಂಡು ಪ್ರಥಮ ಮಾಹಿತಿ ವರದಿ, ಮಹಜರು ಮತ್ತು ಸೊತ್ತುಗಳ ಪಟ್ಟಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿ, ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ ಸೊತ್ತು ಮತ್ತು ಕಡತವನ್ನು ಅಬಕಾರಿ ಇಲಾಖೆಗೆ ಹಸ್ತಾಂತರಿಸುವರೇ ಪೊಲೀಸ್ ಉಪ ನಿರೀಕ್ಷಕರು, ಮಂಗಳೂರು ದಕ್ಷಿಣ ಪೊಲೀಸ್ ಠಾಣೆ, ಇವರು ಕೋರಿದ ಮೇರೆಗೆ, ಪ್ರಾಧಿಕಾರದ ದಿನಾಂಕ:25.10.2006ರ ಆದೇಶದಲ್ಲಿ ಸೊತ್ತುಗಳನ್ನು ಅಬಕಾರಿ ಉಪ ನಿರೀಕ್ಷಕರು, ಮಂಗಳೂರು ದಕ್ಷಿಣ ಜಾರಿ ಮತ್ತು ತನಿಖೆ ಇವರಿಗೆ ಹಸ್ತಾಂತರಿಸಲು ಆದೇಶಿಸಲಾಗಿರುತ್ತದೆ. ಆ ಪ್ರಕಾರ ಮೊಕದ್ದಮೆಗೆ ಸಂಬಂಧಿಸಿ ಸೊತ್ತು ಹಾಗೂ ಕಡತಗಳನ್ನು ದಿನಾಂಕ:15.04.2008ರಂದು ಅಬಕಾರಿ ಉಪ ನಿರೀಕ್ಷಕರು, ಮಂಗಳೂರು ದಕ್ಷಿಣ ವಲಯ-1 ಇವರಿಗೆ ಹಸ್ತಾಂತರಿಸಲಾಗಿರುತ್ತದೆ.

ತಕ್ಷೀರಿನಲ್ಲಿ ವಶಪಡಿಸಿಕೊಂಡ ಮಾರುತಿ 800 ಕಾರು ನೊಂದಾಣಿ ಸಂಖ್ಯೆ: ಕೆಎ-19-ಎಂ-4629ರ ಬಿ ಎಕ್ಸ್‌ಟ್ರಾಕ್ಟ್ ವರದಿಯನ್ನು ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರಿಂದ ಪಡೆದು ಪ್ರಕರಣ ಪತ್ತೆ ಮಾಡಿದ ಪೊಲೀಸ್ ಅಧಿಕಾರಿಗಳು ಇಲಾಖೆಗೆ ಸಲ್ಲಿಸಿದ್ದು, ಸದರಿ ಬಿ ರಿಜಿಸ್ಟ್ರಾರ್ ಎಕ್ಸ್‌ಟ್ರಾಕ್ಟ್ ವರದಿಯ ಪ್ರಕಾರ ವಾಹನವು ಮಾರುತಿ 800 ಕಾರು ಆಗಿರದೇ **ಪ್ರಿಮಿಯರ್ ಪದ್ಮಿನಿ ಡೀಸೆಲ್ ಕಾರು** ಎಂದು ದೃಢೀಕೃತವಾಗಿರುವುದು ಕಂಡು ಬರುತ್ತದೆ.

ಮೊಕದ್ದಮೆಯ ತನಿಖೆಯನ್ನು ಪ್ರಕರಣ ಪತ್ತೆ ಹಚ್ಚಿದ ಪೊಲೀಸ್ ನಿರೀಕ್ಷಕರು, ಮಂಗಳೂರು ದಕ್ಷಿಣ ಪೊಲೀಸ್ ಠಾಣೆ ಇವರು ಪ್ರಕರಣದಲ್ಲಿ ಜಪ್ತಾದ ಸಾರಾಯಿ ಸ್ಯಾಚೇಟುಗಳ ಮಾದರಿಗಳನ್ನು ರಾಸಾಯನಿಕ ಪರೀಕ್ಷೆಗೆ ಒಳಪಡಿಸಿ, ವಿಶ್ಲೇಷಣಾ ವರದಿಯನ್ನು ಪ್ರಕರಣದ ಮುಂದಿನ ತನಿಖಾಧಿಕಾರಿಗಳಾದ ಅಬಕಾರಿ ಉಪ ನಿರೀಕ್ಷಕರು, ಮಂಗಳೂರು ದಕ್ಷಿಣ ವಲಯ-1 ಇವರಿಗೆ ಸಲ್ಲಿಸಿದ್ದು, ಸದರಿ ರಾಸಾಯನಿಕ ಪರೀಕ್ಷಾ ಫಲಿತಾಂಶದ ವರದಿಯಲ್ಲಿ ಸಾರಾಯಿಯಲ್ಲಿ ಮದ್ಯಸಾರದ ಪ್ರಮಾಣ 36.0% ಇರುವುದಾಗಿ ದೃಢೀಕರಣ ಪತ್ರ ನೀಡಿರುತ್ತಾರೆ. ಸದರಿ ಸಾರಾಯಿಯನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ನಾಶಪಡಿಸಲು ಹಾಗೂ ತಕ್ಷೀರಿನಲ್ಲಿ ವಶಪಡಿಸಿಕೊಂಡ ಸೊತ್ತು ಮತ್ತು ವಾಹನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ವಿಲೇವಾರಿ ಮಾಡಲು ಅಬಕಾರಿ ಉಪನಿರೀಕ್ಷಕರು, ಮಂಗಳೂರು ದಕ್ಷಿಣ ವಲಯ-1 ಇವರು ದಿನಾಂಕ:19.04.2008ರಂದು ಶಿಫಾರಸ್ಸು ಮಾಡಿ ವರದಿ ಸಲ್ಲಿಸಿರುತ್ತಾರೆ. ಆ ಪ್ರಕಾರ ಪ್ರಕರಣದಲ್ಲಿ ಜಪ್ತಾದ 100 ಮಿಲಿಯ 6900 ಸಾರಾಯಿ ಸ್ಯಾಚೇಟು (ಮಾದರಿಗಳನ್ನು ಹೊರತುಪಡಿಸಿ) ಗಳನ್ನು ಮತ್ತು ನೋಕಿಯೋ ಮೊಬೈಲ್ ಸೆಟ್ಟನ್ನು ಪ್ರಾಧಿಕಾರದ ದಿನಾಂಕ:17.05.2008ರ ಆದೇಶದಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಸಾರಾಯಿಯನ್ನು ನಾಶಪಡಿಸಲು ಆದೇಶಿಸಲಾಗಿರುತ್ತದೆ.

ಪ್ರಕರಣದಲ್ಲಿ ಜಪ್ತಾದ ವಾಹನ ಮಾರುತಿ 800 ಕಾರು ಸಂಖ್ಯೆ: ಕೆಎ-19ಎಂ-4629 ಇದರ ಬಿ ರಿಜಿಸ್ಟ್ರಾರ್ ಎಕ್ಸ್‌ಟ್ರಾಕ್ಟ್ ವರದಿಯಲ್ಲಿ ವಾಹನ ಪ್ರಿಮಿಯರ್ ಪದ್ಮಿನಿ ಡೀಸೆಲ್ ಕಾರು ಎಂದು ದೃಢೀಕೃತವಾಗಿದ್ದು, ಆದಾಗ್ಯೂ ಸದ್ರಿ ವರದಿಯ ಪ್ರಕಾರ ಮಾಲೀಕರಾದ ಶ್ರೀ ದಿನೇಶ್ ಎಂ. ಬಿನ್ ದಿ:ಕೃಷ್ಣಪ್ಪ, ದೀಪಕ್, ಎಲೆಕ್ಟ್ರಾನಿಕ್ ಅಂಡ್ ಸರ್ವಿಸ್, ಜೆ.ವಿ. ಸನ್ಸ್‌ನ ಹಿಂದುಗಡೆ, ಸರ್ಕಾರಿ ಕಾಲೇಜಿನ ಎದುರುಗಡೆ, ಮಂಗಳೂರು ಇವರಿಗೆ ಮತ್ತು ಪ್ರಕರಣದ ಆರೋಪಿತ ವ್ಯಕ್ತಿಗಳಿಗೆ ದಿನಾಂಕ:18.08.2008ರಂದು ಪ್ರಾಧಿಕಾರದಿಂದ ಕರ್ನಾಟಕ ಅಬಕಾರಿ ಕಾಯಿದೆ 1965 ಕಲಂ 43ಬಿ ಪ್ರಕಾರ ನೀಡಲಾದ ಕಾರಣ ಕೇಳಿ ನೋಟಿಸುಗಳು ವಾಹನದ ಮಾಲೀಕರಿಗೆ ಹಾಗೂ ಆರೋಪಿತ ವ್ಯಕ್ತಿಗಳಿಗೆ ಜಾರಿಯಾಗಿದ್ದು, ಶ್ರೀ ದಿನೇಶ್ ಎಂ. ಬಿನ್ ದಿ:ಕೃಷ್ಣಪ್ಪ ಇವರು ದಿನಾಂಕ:04.09.2008ರಂದು ಪ್ರಾಧಿಕಾರಕ್ಕೆ ಉತ್ತರ ನೀಡಿ ತನ್ನ ಒಡೆತನದಲ್ಲಿರುವ ಕೆಎ-19ಎಂ-4629 ಎಂಬ ನೋಂದಾಣಿ ಸಂಖ್ಯೆ: ಇರುವ ಪ್ರಿಮಿಯರ್ ಪದ್ಮಿನಿ ಡೀಸೆಲ್ ಕಾರು ಈ ತನಕ ಯಾವುದೇ ಅಪರಾಧದಲ್ಲಿ ಶಾಮೀಲಾಗದೇ ತನ್ನ ಸುಪರ್ದಿಯಲ್ಲಿಯೇ ಇರುವುದರಿಂದ ಸದರಿ ಕಾರು ಯಾವ ಕಾರಣಕ್ಕೂ ಮುಟ್ಟುಗೋಲು ಪ್ರಕ್ರಿಯೆಗೆ ಬದ್ಧವಾಗುವುದಿಲ್ಲ ಎಂದು ತಿಳಿಸಿ, ಪೊಲೀಸ್ ಅಧಿಕಾರಿಗಳು ಅಬಕಾರಿ ಪ್ರಕರಣದಲ್ಲಿ ಜಪ್ತುಪಡಿಸಿಕೊಂಡಿರುವ ಕೆಎ-19ಎಂ-4629 ಎಂಬ ಸಂಖ್ಯಾ ಫಲಕ ಇರುವ ಮಾರುತಿ 800 ಕಾರನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವ ವಿಷಯದಲ್ಲಿ ಯಾವುದೇ ಆಕ್ಷೇಪ ಇರುವುದಿಲ್ಲವೆಂದು ತಿಳಿಸಿರುತ್ತಾರೆ. ಹಾಗೂ ಪ್ರಕರಣದ ಆರೋಪಿತ ವ್ಯಕ್ತಿಗಳಿಗೆ ನೀಡಲಾದ ಕಾರಣ ಕೇಳಿ ನೋಟಿಸ್ಸು ದಿನಾಂಕ:29.08.2008ರಂದು ಜಾರಿಯಾಗಿದ್ದರೂ, ಸದರಿಯವರಿಂದ ಯಾವುದೇ ಉತ್ತರ ಈ ಪ್ರಾಧಿಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ.

1965ನೇ ಕರ್ನಾಟಕ ಅಬಕಾರಿ ಕಾಯ್ದೆ ಅಡಿಯಲ್ಲಿ ಪ್ರಕರಣವನ್ನು ದಾಖಲು ಮಾಡುವಾಗ ಆರೋಪಿಯು ಪತ್ತೆಯಾಗದಿದ್ದಲ್ಲಿ ಅಥವಾ ಪತ್ತೆಯಾಗುವ ಸಾಧ್ಯತೆ ಇಲ್ಲದಿದ್ದಲ್ಲಿ ಪ್ರಕರಣವನ್ನು ಪತ್ತೆಹಚ್ಚಿದ ಒಂದು ತಿಂಗಳಲ್ಲಿ ಯಾವುದೇ ವ್ಯಕ್ತಿಯು ಪ್ರಾಧಿಕಾರದ ಮುಂದೆ ಹಾಜರಾಗಿ ಅಪರಾಧದಲ್ಲಿ ಜಪ್ತಾಗಿರುವ ಸೊತ್ತುಗಳು ತಮ್ಮದೆಂದು ಅವುಗಳು ಕಾನೂನು ಬದ್ಧವಾಗಿದೆಯೆಂದು ಸಾಕ್ಷಾಧಾರಗಳೊಂದಿಗೆ ಸಾಬೀತು ಪಡಿಸದೇ ಇದ್ದಲ್ಲಿ, ಸದರಿ ಸೊತ್ತುಗಳು, ಅಬಕಾರಿ ಕಾಯ್ದೆ ಕಲಂ 43ಸಿ ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಯೋಗ್ಯವಾಗಿರುವ ಸೊತ್ತುಗಳಾಗಿದ್ದಲ್ಲಿ ಅಂತಹ ಸೊತ್ತುಗಳನ್ನು ಕಲಂ 43ಸಿ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಬಹುದಾಗಿರುತ್ತದೆ.

ಪ್ರಾಧಿಕಾರದಲ್ಲಿ ಲಭ್ಯವಾಗಿರುವ ದಾಖಲಾತಿಗಳ ಪ್ರಕಾರ ದಿನಾಂಕ:14.06.2005ರಂದು ಕೆಎ-19ಎಂ-4629 ಎಂದು ಸಂಖ್ಯಾ ಫಲಕ ಹೊಂದಿರುವ ಮಾರುತಿ 800 ಕಾರು ಇದರಲ್ಲಿ ಅಕ್ರಮವಾಗಿ ಯಾವುದೇ ರಹದಾರಿ ಪತ್ರವಿಲ್ಲದೇ ಚಾಲಕನು 690.000 ಲೀ (6900 ಸಾರಾಯಿ ಸ್ಯಾಚೇಟುಗಳು) ಸಾರಾಯಿಯನ್ನು ಸಾಗಾಟ ಮಾಡುತ್ತಿದ್ದುದನ್ನು ಪೊಲೀಸ್ ಉಪ ನಿರೀಕ್ಷಕರು, ಮಂಗಳೂರು ದಕ್ಷಿಣ ಪೊಲೀಸ್ ಠಾಣೆ, ಮಂಗಳೂರುರವರು ಪತ್ತೆಹಚ್ಚಿ, ಅಕ್ರಮ ಸಾರಾಯಿ ಸಾಗಾಣಿಕೆಗೆ ಬಳಸಲಾದ ವಾಹನ ಮತ್ತು ಸೊತ್ತುಗಳನ್ನು ಸ್ಥಳ ಮಹಜರು, ಪಂಚನಾಮೆಯ ಮುಖೇನಾ ಸ್ವಾಧೀನಪಡಿಸಿದ್ದು ಹಾಗೂ ವಾಹನದಲ್ಲಿ ಜಪ್ತು ಮಾಡಲ್ಪಟ್ಟಿರುವ ಸಾರಾಯಿ ಮಾದರಿಗಳು ರಾಸಾಯನಿಕ ತಜ್ಞರ ವರದಿಯಂತೆ ಸಾರಾಯಿಯೆಂದು ದೃಢಪಟ್ಟಿರುವುದರಿಂದ, ಸದರಿ ವಾಹನವನ್ನು ಕರ್ನಾಟಕ ಅಬಕಾರಿ ಕಾಯಿದೆ ಕಲಂ 32, 34 ಶಿಕ್ಷಾರ್ಹಕ ಅಪರಾಧವಾಗಿರುವುದರಿಂದ, ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಂದ ಪಡೆದ ಬಿ ರಿಜಿಸ್ಟಾರ್ ವರದಿಯ ಪ್ರಕಾರ ಜಪ್ತುಪಡಿಸಿಕೊಂಡ ವಾಹನದ ನೊಂದಣಿ ಸಂಖ್ಯೆ: ಕೆಎ-19ಎಂ-4629 ಪದ್ಮಿನಿ ಪ್ರಿಮಿಯರ್ ಕಾರಿನದ್ದಾಗಿದ್ದು, ಜಪ್ತಾಗಿರುವ ಮಾರುತಿ 800 ಕಾರಿಗೆ ಆರೋಪಿಗಳು ಸದರಿ ನಂಬರನ್ನು ನಕಲಿಯಾಗಿ ಉಪಯೋಗಿಸಿರುವುದು ಸಾಭೀತಾಗಿದ್ದು, ಆರೋಪಿಗಳು ದುರುದ್ದೇಶದಿಂದ ನಕಲಿ ಸಂಖ್ಯಾ ಫಲಕವನ್ನು ಅಳವಡಿಸಿಕೊಂಡು ತಿಳುವಳಿಕೆಯಿಂದಲೇ ವಾಹನವನ್ನು ಅಕ್ರಮ ಸಾಗಾಣಿಕೆಗೆ ಬಳಸಿರುವುದು ಸ್ಪಷ್ಟವಾಗಿ ಸಾಭೀತಾಗಿರುವುದಾಗಿ ಈ ಪ್ರಾಧಿಕಾರವು ವಾಹನದ ಮುಟ್ಟುಗೋಲು ನಡವಳಿ ಬಗ್ಗೆ ತೀರ್ಮಾನ ತೆಗೆದುಕೊಳ್ಳಬೇಕಾಗಿರುತ್ತದೆ.

ಸದರಿ ಮೊಕದ್ದಮೆಯಲ್ಲಿ ವಶಪಡಿಸಿಕೊಂಡ ಕೆಎ-19ಎಂ-4629 ಎಂದು ಸಂಖ್ಯಾ ಫಲಕ ಹೊಂದಿರುವ ಮಾರುತಿ 800 ಕಾರನ್ನು ವಶಪಡಿಸಿಕೊಂಡು ಸುಮಾರು 3 ವರ್ಷ 6 ತಿಂಗಳು ಕಳೆದರೂ ವಾಹನ ಮಾಲೀಕರು ತಮ್ಮ ವಾಹನದ ಒಡೆತನವನ್ನು ಸಾಭೀತುಪಡಿಸಿಕೊಂಡು ಸಮಂಜಾಯಿಷಿಯನ್ನು ನೀಡಿರುವುದಿಲ್ಲ. ಹಾಗೂ ಮಾಲೀಕತ್ವವನ್ನು ಕೋರಿ ಯಾವುದೇ ಅರ್ಜಿಯನ್ನು ವಾಹನದ ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಈ ಪ್ರಾಧಿಕಾರಕ್ಕೆ ಹಾಜರುಪಡಿಸಿರುವುದಿಲ್ಲ. ಈ ಕಾರಣದಿಂದಾಗಿ ಪ್ರಕರಣದಲ್ಲಿ ಜಪ್ತುಪಡಿಸಿರುವ ಆರೋಪಿತ ವ್ಯಕ್ತಿಗಳೊಂದಿಗೆ ವಾಹನದ ಮಾಲೀಕರ ಶಾಮೀಲಾತಿ ಹಾಗೂ ತಿಳುವಳಿಕೆಯಿಂದಲೇ ವಾಹನಕ್ಕೆ ನಕಲಿ ಸಂಖ್ಯಾ ಫಲಕವನ್ನು ಅಳವಡಿಸಿಕೊಂಡು ಅಕ್ರಮ ಸಾರಾಯಿ ಸಾಗಾಣಿಕೆಗೆ ಬಳಸಿರುವುದು ಕಂಡುಬರುತ್ತದೆ. ಅಲ್ಲದೇ ವಾಹನವನ್ನು ಪಡೆಯಲು ಮತ್ತು ತಕ್ಷೀರನ್ನು ನಡೆಸಲು ಉತ್ಸುಕರಾಗಿಲ್ಲ ಎಂಬುದಾಗಿ ಈ ಪ್ರಾಧಿಕಾರವು ತೀರ್ಮಾನ ತೆಗೆದುಕೊಳ್ಳಬೇಕಾಗಿರುತ್ತದೆ. ಪೊಲೀಸ್ ಉಪ ನಿರೀಕ್ಷಕರು, ಮಂಗಳೂರು ದಕ್ಷಿಣ ಪೊಲೀಸ್ ಠಾಣೆ ರವರು ಸದರಿ ವಾಹನದಲ್ಲಿ ಅಕ್ರಮವಾಗಿ ಸಾರಾಯಿ ಸಾಗಾಣಿಕೆ ಮಾಡುತ್ತಿರುವುದನ್ನು ಪತ್ತೆ ಮಾಡಿ, ಸ್ಥಳ ಮಹಜರಿನ ಮೂಲಕ ಸಾಗಾಣಿಕೆಗೆ ಬಳಸಿದ ವಾಹನವನ್ನು ಹಾಗೂ ಅಕ್ರಮ ಸಾರಾಯಿಯನ್ನು ಜಪ್ತುಪಡಿಸಿರುವುದು ಮತ್ತು ರಾಸಾಯನಿಕ ತಜ್ಞರ ಅಭಿಪ್ರಾಯದಂತೆ ಜಪ್ತು ಪಡಿಸಲಾದ ಪದಾರ್ಥವು ಸಾರಾಯಿಯೆಂದು ದೃಢೀಕೃತವಾಗಿರುವುದು ಇದು ಅಕ್ರಮವಾಗಿ ಸಾರಾಯಿಯನ್ನು ವಾಹನದಲ್ಲಿ ಸಾಗಾಟ ಮಾಡಿರುವುದು ಮೇಲ್ನೋಟಕ್ಕೆ ಈ ಮೇಲಿನ ಎಲ್ಲಾ ದಾಖಲಾತಿಗಳಿಂದ ಸಾಭೀತಾಗಿರುತ್ತದೆ.

ಈ ಮೇಲಿನ ಎಲ್ಲಾ ಅಂಶಗಳನ್ನು ಪರಿಶೀಲಿಸಿದಾಗ ಪೊಲೀಸ್ ಉಪ ನಿರೀಕ್ಷಕರು, ಮಂಗಳೂರು ದಕ್ಷಿಣ ಪೊಲೀಸ್ ಠಾಣೆ, ಮಂಗಳೂರು ಇವರು ವಶಪಡಿಸಿಕೊಂಡ ಕೆಎ-19ಎಂ-4629 ಎಂದು ನಕಲಿ ಸಂಖ್ಯಾ ಫಲಕ ಹೊಂದಿರುವ ಮಾರುತಿ 800 ಕಾರನ್ನು ವಶಪಡಿಸಿಕೊಂಡು ಸುಮಾರು 3 ವರ್ಷ 6 ತಿಂಗಳಿಗಿಂತ ಹೆಚ್ಚು ಸಮಯ ಕಳೆದಿದ್ದು, ಆದರೆ ಯಾವುದೇ ವ್ಯಕ್ತಿಯು ಸೂಕ್ತ ದಾಖಲಾತಿಗಳೊಂದಿಗೆ ವಾಹನದ ಮಾಲೀಕತ್ವವನ್ನು ಕೋರಿ ಈ ಪ್ರಾಧಿಕಾರದ ಮುಂದೆ ಹಾಜರಾಗಿರುವುದಿಲ್ಲ. ಕಾರಣ ಅಕ್ರಮ ಸಾರಾಯಿ ಸಾಗಾಣಿಕೆಗೆ ಬಳಸಿದ ಕೆಎ-19ಎಂ-4629 ಎಂದು ನಕಲಿ ಸಂಖ್ಯಾ ಫಲಕ ಹೊಂದಿರುವ ಮಾರುತಿ 800 ಕಾರನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ವಿಲೇವಾರಿ ಮಾಡುವುದು ಯೋಗ್ಯವೆಂದು ಕಂಡುಬಂದ ಹಿನ್ನೆಲೆಯಲ್ಲಿ ಈ ಆದೇಶ.

ಆದೇಶ

ನೂರ್ ಮಹಮ್ಮದ್ ಹುಸೇನ್, ಅಧಿಕೃತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಆದ ನಾನು ಕರ್ನಾಟಕ ಅಬಕಾರಿ ಕಾಯಿದೆ 1965ರ ಕಲಂ 43ಬಿ ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಅನುಸರಿಸಿದ ನಂತರ ಕಲಂ 43ಎ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಪೊಲೀಸ್ ಉಪ ನಿರೀಕ್ಷಕರು, ಮಂಗಳೂರು ದಕ್ಷಿಣ ಪೊಲೀಸ್ ಠಾಣೆ, ಮಂಗಳೂರು ಇವರ ಕ್ರೈ ಸಂಖ್ಯೆ:205/2005, ದಿನಾಂಕ:14.06.2005

ರಲ್ಲಿ ಅಕ್ರಮ ಸಾರಾಯಿ ಸಾಗಾಣಿಕೆಗೆ ಬಳಸಿದ ಕೆಎ-19ಎಂ-4629 ಎಂದು ನಕಲಿ ಸಂಖ್ಯಾ ಫಲಕ ಹೊಂದಿರುವ ಮಾರುತಿ 800 ಕಾರು (ಚಾಸೀಸ್ ಸಂಖ್ಯೆ:SB308N453274 ಹಾಗೂ ಇಂಜಿನ್ ಸಂಖ್ಯೆ 8BCN649227) ಇದನ್ನು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 43ಸಿ ರನ್ವಯ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶ ನೀಡಿರುತ್ತೇನೆ. ಸದರಿ ನೊಂದಣಿ ಸಂಖ್ಯೆಯ ಕೆಎ-19ಎಂ-4629 ನೈಜ ಸಂಖ್ಯೆ ಹೊಂದಿರುವ ಪದ್ಮಿನಿ ಪ್ರಿಮಿಯರ್ ಕಾರಿನ ಆರ್.ಸಿ. ಮಾಲೀಕರಾದ ಶ್ರೀ ದಿನೇಶ್ ಎಂ. ಇವರ ಪದ್ಮಿನಿ ಪ್ರಿಮಿಯರ್ ಕಾರನ್ನು ಈ ಮುಟ್ಟುಗೋಲು ನಡವಳಿಗಳಿಂದ ಹೊರತುಪಡಿಸಿ, ಸದರಿ ವಾಹನಕ್ಕೆ ಈ ಪ್ರಾಧಿಕಾರದ ಯಾವುದೇ ಬಾಧೆ ಹಾಗೂ ಹೊಣೆ ಇರುವುದಿಲ್ಲವೆಂದು ಆದೇಶಿಸಿದೆ.

ಈ ಆದೇಶವನ್ನು ದಿನಾಂಕ:22.12.2008ರಂದು ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿವಸಗಳ ನಂತರ ಜಾರಿಯಲ್ಲಿ ಬರುತ್ತದೆ.

ನೂರ್ ಮಹಮ್ಮದ್ ಹುಸೇನ್

ಪಿ.ಆರ್.83

ಅಧಿಕೃತ ಅಧಿಕಾರಿಗಳು ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಅಧಿಕೃತ ಅಧಿಕಾರಿಗಳು ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನ್ಯಾಯಾಲಯದಲ್ಲಿ

ಸಂಖ್ಯೆ: ಎಸ್‌ಡಿಕೆ/88/ಡಿಟಿಸಿಆರ್/2007-08, ದಿನಾಂಕ:30ನೇ ಡಿಸೆಂಬರ್, 2008

ಉಪಸ್ಥಿತರು: ನೂರ್‌ಮಹಮ್ಮದ್ ಹುಸೇನ್
ಅಧಿಕೃತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಫಿರ್ಯಾದುದಾರರು:

ಅಬಕಾರಿ ಉಪ ನಿರೀಕ್ಷಕರು (ನಂ.1) ಜಾರಿ ಮತ್ತು ತನಿಖೆ, ಮಂಗಳೂರು ಉತ್ತರ.

ಆರೋಪಿಗಳು:

1) ರಾಜೇಶ್ ರಾವ್ (26 ವ), ಬಿನ್ ದಿ: ಆನಂದ ರಾವ್, ವಾಸ: ಪರಪು ಹೌಸ್, ಕುಕ್ಕುಂದೂರ್ ಗ್ರಾಮ, ಕಾರ್ಕಳ.

2) ಉಮೇಶ್ ಶೆಟ್ಟಿ (19 ವ), ಬಿನ್ ರಾಜೀವ್ ಶೆಟ್ಟಿ, ವಾಸ: ಪರಪು ಹೌಸ್, ತಾಲ್ಲೂಕು ಕಛೇರಿ ಹತ್ತಿರ, ಕಾರ್ಕಳ.

3) ದಿನೇಶ್ ಆಚಾರಿ (18 ವ), ಬಿನ್ ಆನಂದ ಆಚಾರ್ಯ, ವಾಸ: ಕುಕ್ಕುಂದೂರ್ ದರ್ಖಾಸ್ತು ಹೌಸ್, ಕಾರ್ಕಳ.

ವಾಹನ ಮಾಲೀಕರು:

ಶ್ರೀ ಅರವಿಂದ ಪಿ. ಶೆಣೈ, ಬಿನ್ ಮಂಗಳಪಾಡಿ ಮುಂಡಲೀಕ ಶೆಣೈ, ಸಪ್ತಗಿರಿ 1ನೇ ಮಹಡಿ, ವ್ಯಾಸರಾವ್ ರೋಡ್, ಮಂಗಳೂರು ತಾಲ್ಲೂಕು.

ಪ್ರಕರಣದ ಮುಖ್ಯಾಂಶಗಳು:

ಅಬಕಾರಿ ಉಪ ನಿರೀಕ್ಷಕರು (ನಂ.1) ಜಾರಿ ಮತ್ತು ತನಿಖೆ, ಮಂಗಳೂರು ಉತ್ತರ ಇವರು ತಮ್ಮ ಸಿಬ್ಬಂದಿಯವರೊಂದಿಗೆ ಮಂಗಳೂರು ತಾಲ್ಲೂಕು ಕದ್ರಿ ಮಲ್ಲಿಕಟ್ಟೆ ಪೆಟ್ರೋಲ್ ಬಂಕ್ ಬಳಿ ಅಬಕಾರಿ ಅಕ್ರಮಗಳನ್ನು ತಡೆಗಟ್ಟುವ ಬಗ್ಗೆ ಗಸ್ತು ತಿರುಗುತ್ತಿದ್ದಾಗ ದಿನಾಂಕ:20.09.2007 ರಂದು ಮಂಗಳೂರಿನಿಂದ ಕಾರ್ಕಳಕ್ಕೆ ವಾಹನ ಮೂಲಕ ಅಕ್ರಮವಾಗಿ ನಕಲಿ ಮದ್ಯ ಸಾಗಾಟ ಮಾಡುತ್ತಿದ್ದಾರೆಂಬ ಖಚಿತ ವರ್ತಮಾನದ ಮೇರೆಗೆ ಮಂಗಳೂರು ತಾಲ್ಲೂಕು ಬೆಂದೂರು ಜಂಕ್ಷನ್ ಬಳಿ ರಸ್ತೆಗಾವಲು ನಡೆಸುತ್ತಿದ್ದ ಸಂದರ್ಭದಲ್ಲಿ ಕಂಕನಾಡಿ ಕಡೆಯಿಂದ ನಂತೂರು ಕಡೆಗೆ ವೇಗವಾಗಿ ಬರುತ್ತಿದ್ದ ಮಾರುತಿ ಕಾರನ್ನು ಬೆನ್ನಟ್ಟಿ ಕದ್ರಿ ಮಲ್ಲಿಕಟ್ಟೆ ಪೆಟ್ರೋಲ್ ಬಂಕ್ ಬಳಿ ತಡೆದು ನಿಲ್ಲಿಸಿ ವಿಚಾರಿಸಿದಾಗ, ಸದರಿ ಕಾರಿನಲ್ಲಿ ಯಾವುದೇ ರಹದಾರಿ ಪತ್ರವಿಲ್ಲದೇ ಅಕ್ರಮವಾಗಿ ಮದ್ಯವನ್ನು ಸಾಗಾಣಿಕೆ ಮಾಡುತ್ತಿರುವುದು ಪತ್ತೆಯಾಗಿದ್ದು, ನ್ಯಾಯಾಲಯದ ಸರ್ಚ್ ವಾರೆಂಟ್ ಪಡೆಯಲು ಕಾಲಾವಕಾಶವಿಲ್ಲದ ಕಾರಣ ಹಾಗೂ ಸಮಯ ವಿಳಂಬವಾದಲ್ಲಿ ಅಪರಾಧವನ್ನು ಮರೆಮಾಡುವ ಸಾಧ್ಯತೆಯಿರುವ ಕಾರಣ ಸ್ಥಳದಲ್ಲಿಯೇ ಸರ್ಚ್ ಮೆಹೊವನ್ನು ತಯಾರಿಸಿ, ಸದರಿ ಕಾರನ್ನು ಪರಿಶೀಲಿಸಿದಾಗ, ಅದು ಮಾರುತಿ 800 ಕಾರು ಆಗಿದ್ದು, ಅದರ ನೋಂದಣಿ ಸಂಖ್ಯೆ: ಸಿಕೆಎಸ್-4068 ಆಗಿರುತ್ತದೆ. ಸದರಿ ಕಾರಿನಲ್ಲಿ ಒಟ್ಟು 3 ಜನ ಕುಳಿತ್ತಿದ್ದು, ಸೀಟಿನ ಹಿಂಬದಿಯಲ್ಲಿ ಒಟ್ಟು 6 ರಟ್ಟಿನ ಪೆಟ್ಟಿಗೆಗಳಲ್ಲಿ ತಲಾ 750 ಎಂ.ಎಲ್. ನ 12 ಸೀಸೆಗಳಲ್ಲಿ ಮೈಸೂರು ಲ್ಯಾನ್ಸರ್ ಎಂಬ ಲೇಬಲ್ ಹಚ್ಚಿರುವ ಒಟ್ಟು 72 ಸೀಸೆಗಳಲ್ಲಿ 54.000 ಲೀಟರ್ ಮದ್ಯವಿದ್ದು, ಇವುಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿದಾಗ, ಮದ್ಯದ ಸೀಸೆಗಳಿಗೆ ಅಬಕಾರಿ ಭದ್ರತಾ ಚೀಟಿಗಳು ಇಲ್ಲದಿದ್ದು, ನಕಲಿ ಮದ್ಯದಂತೆ ಕಂಡುಬಂತು ಸ್ಥಳದಲ್ಲಿಯೇ ಪಂಚರಾಗಿ ಸಹಕರಿಸಲು ಯಾರೂ ಮುಂದೆ ಬಾರದಿರುವ ಕಾರಣ ಇಲಾಖೆಯವರನ್ನೇ ಪಂಚರಾಗಿ ಇರಿಸಿಕೊಳ್ಳಲಾಯಿತು. ಕಾರು ಚಲಾಯಿಸುತ್ತಿದ್ದ ವ್ಯಕ್ತಿಯ ಹೆಸರು ಮತ್ತು ವಿಳಾಸವನ್ನು ವಿಚಾರಿಸಿದಾಗ ರಾಜೇಶ್ ರಾವ್ (26

ವ), ಬಿನ್ ದಿ. ಆನಂದ ರಾವ್, ವಾಸ: ಪರಪು ಹೌಸ್, ಕುಕ್ಕುಂದೂರು ಗ್ರಾಮ, ಕಾರ್ಕಳ ಮತ್ತು ಇತರ ಇಬ್ಬರು ವ್ಯಕ್ತಿಗಳಲ್ಲಿ ಒಬ್ಬಾತ ಉಮೇಶ್ ಶೆಟ್ಟಿ ಬಿನ್ ರಾಜೀವ್ ಶೆಟ್ಟಿ, ವಾಸ: ಪರಪು ಹೌಸ್, ತಾಲ್ಲೂಕು ಕಛೇರಿ ಹತ್ತಿರ, ಕಾರ್ಕಳ ಹಾಗೂ ಇನ್ನೊಬ್ಬ ವ್ಯಕ್ತಿ ದಿನೇಶ್ ಆಚಾರಿ (18 ವ), ಬಿನ್ ಆನಂದ ಆಚಾರ್ಯ, ವಾಸ: ಕುಕ್ಕುಂದೂರ್ ದರ್ಖಾಸ್ತು ಹೌಸ್, ಕಾರ್ಕಳ ಎಂದು ತಿಳಿಸಿರುತ್ತಾರೆ. ಇದು ಅಕ್ರಮ ನಕಲಿ ಮದ್ಯ ಸಾಗಾಣಿಕೆಯಾಗಿರುವುದರಿಂದ ಮತ್ತು ಕರ್ನಾಟಕ ಅಬಕಾರಿ ಕಾಯಿದೆ 1965 ಕಲಂ 11 ಮತ್ತು 14ರಂತೆ ಅಪರಾಧವಾಗಿದ್ದು, ಕಲಂ 32, 34 ಮತ್ತು 38(ಎ) ರೀತ್ಯಾ ಶಿಕ್ಷಾರ್ಹವಾಗಿರುವುದರಿಂದ, ನಕಲಿ ಮದ್ಯವನ್ನು ಮತ್ತು ಸಾಗಾಣಿಕೆಗೆ ಬಳಸಿದ ಮಾರುತಿ 800 ಕಾರು ಸಂಖ್ಯೆ: ಸಿಕೆಎಸ್-4068ನ್ನು ವಶಪಡಿಸಿಕೊಂಡು ಆರೋಪಿಗಳನ್ನು ಸ್ಥಳದಲ್ಲಿಯೇ ದಸ್ತಗಿರಿ ಮಾಡಿ ಮಹಜರನ್ನು ಸ್ಥಳದಲ್ಲಿಯೇ ತಯಾರಿಸಿ ಆರೋಪಿಗಳ ವಿರುದ್ಧ ತಕ್ಷೀರು ಸಂಖ್ಯೆ: 9/2007-08ರಂತೆ ಪ್ರಕರಣವನ್ನು ನೋಂದಾಯಿಸಿ ಆರೋಪಿಗಳನ್ನು ಮಾನ್ಯ ನ್ಯಾಯಾಲಯಕ್ಕೆ ಹಾಗೂ ಈ ಪ್ರಾಧಿಕಾರದಲ್ಲಿ ಪ್ರಥಮ ಮಾಹಿತಿ ವರದಿಯನ್ನು ಹಾಜರುಪಡಿಸಿ ತಕ್ಷೀರಿನ ಮುಂದಿನ ತನಿಖೆಯನ್ನು ಮುಂದುವರಿಸಿರುತ್ತಾರೆ.

ಈ ಪ್ರಾಧಿಕಾರದಿಂದ ದಿನಾಂಕ:29.09.2007ರಂದು ಪ್ರಾದೇಶಿಕ ಸಾರಿಗೆ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರಿಗೆ ಪತ್ರ ಬರೆಯಲಾಗಿದ್ದು, ಸದರಿ ಪತ್ರದಲ್ಲಿ ತಕ್ಷೀರಿನಲ್ಲಿ ವಶಪಡಿಸಿಕೊಂಡ ಮಾರುತಿ 800 ಕಾರು ಸಂಖ್ಯೆ: ಸಿಕೆಎಸ್-4068ರ ಆರ್.ಸಿ. ಮಾಲೀಕರ ಹೆಸರು ಮತ್ತು ವಿಳಾಸವನ್ನು ಹಾಗೂ ವಾಹನದ ನೋಂದಣಿ ಮಾಲೀಕತ್ವವನ್ನು ಬದಲಾಯಿಸಬಾರದೆಂದು ಪತ್ರ ಬರೆಯಲಾಗಿತ್ತು. ಸದರಿ ಪತ್ರದ ಅನುಸಾರ ಪ್ರಾದೇಶಿಕ ಸಾರಿಗೆ ಅಧಿಕಾರಿ, ಮಂಗಳೂರುರವರು ವಾಹನದ ನೋಂದಣಿ ಸಂಖ್ಯೆ: ಸಿಕೆಎಸ್-4068ರ ವಾಹನವು ಮಾರುತಿ 800 ಕಾರು ಆಗಿದ್ದು, ಇದು 1989 ಮಾಡೆಲ್ ಆಗಿದ್ದು, ಇದರ ಚಾಸೀಸ್ ನಂ.ಎಸ್‌ಬಿ308ಐ ಎನ್ 289073 ಮತ್ತು ಇಂಜಿನ್ ನಂ.397999 ಹಾಗೂ ಇದರ ನೋಂದಣಿ ಮಾಲೀಕ ಶ್ರೀ ಅರವಿಂದ ಪಿ. ಶೆಣೈ, ಬಿನ್ ಮಂಗಳಪಾಡಿ ಪುಂಡಲೀಕ ಶೆಣೈ, ಸಪ್ತಗಿರಿ 1ನೇ ಮಹಡಿ, ವ್ಯಾಸರಾವ್ ರೋಡ್, ಮಂಗಳೂರು ತಾಲ್ಲೂಕು ಎಂದು ಹಾಗೂ ಸಿ.ಸಿ. ಯನ್ನು ದಿನಾಂಕ:06.04.2000 ರಂದು ಉಡುಪಿ ಜಿಲ್ಲೆ, ಉಡುಪಿ ಇವರಿಗೆ ವಾಹನದ ನೋಂದಣಿ ಮಾಲೀಕತ್ವದ ಬದಲಾವಣೆಗಾಗಿ ಕಳುಹಿಸಲಾಗಿದೆ ಎಂದು ಬಿ ರಿಜಿಸ್ಟರ್ ಎಕ್ಸ್‌ಟ್ರಾಕ್ಟ್ ಮೂಲಕ ಈ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ಈ ಬಗ್ಗೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಉಡುಪಿ ಜಿಲ್ಲೆ, ಉಡುಪಿ ಇವರಿಗೆ ಈ ಪ್ರಾಧಿಕಾರದಿಂದ ದಿನಾಂಕ:06.11.2007ರಂದು ಪತ್ರ ಬರೆಯಲಾಗಿದ್ದು, ಸದರಿ ಪತ್ರದಲ್ಲಿ ವಾಹನದ ನೋಂದಣಿ ಮಾಲೀಕತ್ವ ಬದಲಾವಣೆಯಾಗಿದ್ದಲ್ಲಿ, ವಾಹನದ ನೋಂದಣಿ ಮಾಲೀಕತ್ವದ ಬಗ್ಗೆ ವಿವರಗಳನ್ನು ನೋಂದಣಿ ಬಿ ರಿಜಿಸ್ಟರ್ ಎಕ್ಸ್‌ಟ್ರಾಕ್ಟ್ ಮೂಲಕ ಈ ಪ್ರಾಧಿಕಾರಕ್ಕೆ ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲು ಕೋರಲಾಗಿದ್ದು, ಈವರೆಗೆ ಯಾವುದೇ ಪತ್ರ ಈ ಪ್ರಾಧಿಕಾರಕ್ಕೆ ಬಂದಿರುವುದಿಲ್ಲ.

ವಾಹನದ ನೋಂದಣಿ ಮಾಲೀಕರಾದ ಶ್ರೀ ಅರವಿಂದ ಪಿ. ಶೆಣೈ ಬಿನ್ ಮಂಗಳಪಾಡಿ ಪುಂಡಲೀಕ ಶೆಣೈ, ಸಪ್ತಗಿರಿ 1ನೇ ಮಹಡಿ, ವ್ಯಾಸ ರಾವ್ ರೋಡ್, ಮಂಗಳೂರು ತಾಲ್ಲೂಕು ಮತ್ತು ತಕ್ಷೀರಿನಲ್ಲಿ ದಸ್ತಗಿರಿಯಾದ ಆರೋಪಿಗಳಾದ ರಾಜೇಶ್ ರಾವ್ (26 ವ), ಬಿನ್ ದಿ. ಆನಂದ ರಾವ್, ವಾಸ: ಪರಪು ಹೌಸ್, ಕುಕ್ಕುಂದೂರು ಗ್ರಾಮ, ಕಾರ್ಕಳ ಮತ್ತು ಉಮೇಶ್ ಶೆಟ್ಟಿ (19 ವ), ಬಿನ್ ರಾಜೀವ್ ಶೆಟ್ಟಿ, ವಾಸ: ಪರಪು ಹೌಸ್, ತಾಲ್ಲೂಕು ಕಛೇರಿ ಹತ್ತಿರ, ಕಾರ್ಕಳ ಹಗೂ ದಿನೇಶ್ ಆಚಾರಿ (18 ವ), ಬಿನ್ ಆನಂದ ಆಚಾರ್ಯ, ವಾಸ: ಕುಕ್ಕುಂದೂರ್ ದರ್ಖಾಸ್ತು ಹೌಸ್, ಕಾರ್ಕಳ ಇವರಿಗೆ ಈ ಪ್ರಾಧಿಕಾರವು ದಿನಾಂಕ:15.07.2008 ರಂದು ಕರ್ನಾಟಕ ಅಬಕಾರಿ ಕಾಯಿದೆ 1965 ಸೆಕ್ಷನ್ 43(ಬಿ) ಪ್ರಕಾರ ಕಾರಣ ಕೇಳಿ ನೋಟಿಸುಗಳನ್ನು ನೋಂದಣಿ ಅಂಚೆ ಮೂಲಕ ನೀಡಲಾಗಿದ್ದು, ಸದರಿ ನೋಟೀಸಿನಲ್ಲಿ ತಕ್ಷೀರಿನಲ್ಲಿ ವಶಪಡಿಸಿಕೊಂಡ ಮಾರುತಿ 800 ರ ನೋಂದಣಿ ಸಂಖ್ಯೆ: ಸಿಕೆಎಸ್-4068 ಮತ್ತು ಇತರೆ ಸೊತ್ತುಗಳನ್ನು ಕರ್ನಾಟಕ ಅಬಕಾರಿ ಕಾಯಿದೆ ಕಲಂ 43(ಎ) ರಂತೆ ಏಕೆ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಬಾರದಾಗಿ ಈ ಕಾರಣ ಕೇಳಿ ನೋಟೀಸು ನೀಡಲಾಗಿ, ಈ ನೋಟೀಸು ಹೊರಡಿಸಿರುವ ದಿನಾಂಕದಿಂದ 7 ದಿವಸದೊಳಗಾಗಿ ನಿಮ್ಮ ಹೇಳಿಕೆಗಳನ್ನು ಖುದ್ದಾಗಿ ಅಥವಾ ವಕೀಲರ ಮೂಲಕ ಸಲ್ಲಿಸಲು ಸೂಚಿಸಿದ್ದು, ತಪ್ಪಿದಲ್ಲಿ ನಿಮ್ಮ ಹೇಳಿಕೆ ಏನೂ ಇರುವುದಿಲ್ಲವೆಂದು ಪರಿಗಣಿಸಿ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದೆಂದು ತಿಳಿಸಲಾಗಿರುತ್ತದೆ. ಆರ್.ಸಿ. ಮಾಲೀಕರಾದ ಶ್ರೀ ಅರವಿಂದ ಪಿ. ಶೆಣೈ ಇವರಿಗೆ ನೀಡಿದ ನೋಟೀಸಿನಲ್ಲಿ ಸದರಿಯವರು ಸದರಿ ವಿಳಾಸದಲ್ಲಿ ಇಲ್ಲವೆಂದು ಅಂಚೆ ಇಲಾಖೆಯ ಷರಾದೊಂದಿಗೆ ಈ ಪ್ರಾಧಿಕಾರಕ್ಕೆ ಹಿಂದೆ ಬಂದಿರುತ್ತದೆ. ಆದಾಗ್ಯೂ ಸದರಿ ಕಾರಣ ಕೇಳಿ ನೋಟೀಸನ್ನು ಅಬಕಾರಿ ನಿರೀಕ್ಷಕರು, ಮಂಗಳೂರು ಉತ್ತರ ವಲಯ ಇವರ ಮೂಲಕ ಖುದ್ದಾಗಿ ವಾಹನದ ಮಾಲೀಕರಾದ ಶ್ರೀ ಅರವಿಂದ ಶೆಣೈ ಇವರಿಗೆ ಜಾರಿ ಮಾಡಲಾಗಿದ್ದು, ಸದರಿಯವರಿಂದ ಯಾವುದೇ ಉತ್ತರ ಈ ಪ್ರಾಧಿಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ ಹಾಗೂ ಪ್ರಕರಣದ ಆರೋಪಿಯಾದ ರಾಜೇಶ್‌ರಾವ್ ಇವರು ದಿನಾಂಕ:24.07.2008 ರಂದು ನೋಟಿಸನ್ನು ಸ್ವೀಕರಿಸಿದ್ದು, ಅಂಚೆ ಸ್ವೀಕೃತ ಪತ್ರ ಈ ಪ್ರಾಧಿಕಾರಕ್ಕೆ ಬಂದಿರುತ್ತದೆ. ಅವರಿಂದಲೂ ಸಹಾ ನೋಟೀಸಿಗೆ ಉತ್ತರ ಬಂದಿರುವುದಿಲ್ಲ.

ಅಬಕಾರಿ ನಿರೀಕ್ಷಕರು, ಮಂಗಳೂರು ಉತ್ತರ ವಲಯ-1, ಮಂಗಳೂರು ಇವರ ತನಿಖಾ ವರದಿ ಸಂಖ್ಯೆ:16/2007-08 ದಿನಾಂಕ: 29.07.2008ರ ಪತ್ರದಲ್ಲಿ ತಕ್ಷೀರಿನಲ್ಲಿ ವಶಪಡಿಸಿಕೊಂಡ ಮದ್ಯದ ಸ್ಯಾಂಪಲ್ ಸೀಸೆಗಳನ್ನು ರಾಸಾಯನಿಕ

ವಿಶ್ಲೇಷಣೆಗೆ ಕಳುಹಿಸಲಾಗಿದ್ದು ಕರ್ನಾಟಕ ಸರ್ಕಾರದ ಸಹಾಯಕ ರಾಸಾಯನಿಕ ವಿಶ್ಲೇಷಕರು, ಮಂಗಳೂರು ಇವರ ಪತ್ರ ಸಂಖ್ಯೆ: ಇ–337–6 ದಿನಾಂಕ:07.11.2007ರಲ್ಲಿ ಮದ್ಯದ ಮದ್ಯಸಾರ ಅಂಶವು 31 ಇದ್ದು 60 ಡಿಗ್ರಿ ಒ.ಪಿ. ಇರುವುದಾಗಿ ದೃಢೀಕರಣ ಪತ್ರ ನೀಡಿರುವುದರಿಂದ, ಮೊಕದ್ದಮೆಯಲ್ಲಿ ವಶಪಡಿಸಿಕೊಂಡಿರುವ ನಕಲಿ ಮದ್ಯವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ನಾಶಪಡಿಸಲು ಹಾಗೂ ಸಾಗಾಣಿಕೆಗೆ ಬಳಸಿದ ಮಾರುತಿ 800 ಕಾರು ಸಂಖ್ಯೆ:ಸಿಕೆಎಸ್–4068ರ ವಾರೀಸುದಾರರು ಮುಂದೆ ಬಾರದೆ ಇದ್ದುದರಿಂದ, ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ವಿಲೇವಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ. ಈ ಪ್ರಾಧಿಕಾರದ ದಿನಾಂಕ:04.09.2008ರ ಆದೇಶದಂತೆ ಪ್ರಕರಣದಲ್ಲಿ ಜಪ್ತುಪಡಿಸಿಕೊಳ್ಳಲಾದ 54 ಲೀಟರು ಮದ್ಯವನ್ನು (ಮಾದರಿ ಹೊರತುಪಡಿಸಿ) ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಸರ್ಕಾರದ ಪ್ರಸ್ತುತ ಅಧಿಸೂಚನೆಯಂತೆ ಮುಟ್ಟುಗೋಲು ಹಾಕಿಕೊಂಡ ಮದ್ಯವನ್ನು ನಾಶಪಡಿಸಲು ಆದೇಶಿಸಲಾಗಿರುತ್ತದೆ.

ನಂತರ ವಿಚಾರಣೆಯನ್ನು ಪ್ರಾರಂಭಿಸಿ ಸರ್ಕಾರದ ಪರ ಸಾಕ್ಷಿಗಳನ್ನು ವಿಚಾರಣೆಗೆ ಒಳಪಡಿಸಿ ಸಾಕ್ಷಿಯ ಹೇಳಿಕೆಯನ್ನು ಪಡೆಯಲಾಗಿರುತ್ತದೆ. ಪ್ರತಿರಕ್ಷಾ ಸಾಕ್ಷಿಗಳು ಹಾಜರಾಗದೇ ಇದುದ್ದರಿಂದ ಪ್ರತಿ ರಕ್ಷಾ ಸಾಕ್ಷಿಗಳ ಹೇಳಿಕೆಯನ್ನು ಪಡೆಯಲಾಗಿರುವುದಿಲ್ಲ.

ಈ ಪ್ರಕರಣದಲ್ಲಿ ಸರ್ಕಾರದ ಅಭಿಯೋಜನ ಪರ ಸಲ್ಲಿಸಿರುವ ಸಾಕ್ಷಾಧಾರಗಳಿಂದ ಈ ಕೆಳಗಿನ ವಿವಿಧಾಂಶಗಳನ್ನು ತೀರ್ಮಾನಿಸುವುದು ಅಗತ್ಯವಾಗಿದ್ದು ಪರಿಶೀಲನಾಂಶಗಳು ಈ ಕೆಳಗಿನಂತಿರುತ್ತದೆ.

1) ದಿನಾಂಕ:20.09.2007 ರಂದು ಮಾರುತಿ 800 ಕಾರು ಸಂಖ್ಯೆ: ಸಿಕೆಎಸ್–4068 ರಲ್ಲಿ ಅಕ್ರಮವಾಗಿ ಯಾವುದೇ ರಹದಾರಿ ಪತ್ರವಿಲ್ಲದೆ ಮದ್ಯ ಸಾಗಾಣಿಕೆ ಮಾಡಲಾಗಿದೆಯೇ?

2) ವಶಪಡಿಸಿಕೊಂಡಿರುವ ವಾಹನ ಮಾಲೀಕ ತಾನೆಂದು ತನಗೆ ತಿಳಿಯದೇ ಅಕ್ರಮ ಮದ್ಯ ಸಾಗಾಣಿಕೆಗೆ ವಾಹನವನ್ನು ಉಪಯೋಗಿಸಲ್ಪಟ್ಟಿತ್ತು ಎಂಬುದನ್ನು ವಾಹನ ಮಾಲೀಕರು ಸಾಬೀತುಪಡಿಸಿದ್ದಾರೆಯೇ?

3) ಜಪ್ತುಪಡಿಸಲಾಗಿರುವ ವಾಹನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಬಹುದೇ?

ಒಂದನೇ ಅಂಶವನ್ನು ಗುಣಾತ್ಮಕವಾಗಿ, ಎರಡನೇ ಅಂಶವನ್ನು ನಕರಾತ್ಮಕವಾಗಿ ಮತ್ತು ಮೂರನೇ ಅಂಶವನ್ನು ಅಂತಿಮ ಆದೇಶದಂತೆ.

ಪ್ರಾ.ಸ–1:

ಶ್ರೀ ವಿನೋದ್‌ಕುಮಾರ್, ಅಬಕಾರಿ ಉಪ ನಿರೀಕ್ಷಕರು (1), ಮಂಗಳೂರು ಉತ್ತರ ವಲಯ–1 ಇವರು ದಿನಾಂಕ:30.12.2008ರಂದು ಈ ಪ್ರಾಧಿಕಾರದ ಮುಂದೆ ಹಾಜರಾಗಿ ಇವರು ಪ್ರಕರಣದ ಫಿರ್ಯಾದುದಾರರಾಗಿದ್ದು, ತಮ್ಮ ಸಾಕ್ಷಿಯನ್ನು ನೀಡಿರುತ್ತಾರೆ. ತಾನು ಕಳೆದ ನಾಲ್ಕು ವರ್ಷಗಳಿಂದ ಮಂಗಳೂರು ಉತ್ತರ ಜಾರಿ ಮತ್ತು ತನಿಖೆ ಕಛೇರಿಯಲ್ಲಿ ಅಬಕಾರಿ ಉಪ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಪ್ರಸ್ತುತ 1–4–2008 ರಿಂದ ಅಬಕಾರಿ ನಿರೀಕ್ಷಕರ ಕಛೇರಿ ಮಂಗಳೂರು ಉತ್ತರ ವಲಯ–1 ಇಲ್ಲಿ ಅಬಕಾರಿ ಉಪ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ. ದಿನಾಂಕ:20.09.2007ರಂದು 7:30 ಗಂಟೆ ಸಮಯಕ್ಕೆ ಮಂಗಳೂರು ನಗರದ ಬೆಂದೂರುವೆಲ್ ಬಳಿ ಗಸ್ತು ತಿರುಗುತ್ತಿರುವ ಸಮಯದಲ್ಲಿ ಒಂದು ಮಾರುತಿ ವಾಹನದಲ್ಲಿ ಮದ್ಯ ಸರಬರಾಜು ಆಗುತ್ತಿರುವ ಬಗ್ಗೆ ದೂರವಾಣಿ ಮೂಲಕ ಒಂದು ಖಚಿತ ವರ್ತಮಾನ ಬಂದಿದ್ದು, ಈ ಬಗ್ಗೆ ನಾವು ಹಾಗೂ ಸಿಬ್ಬಂದಿಯವರು ಬೆಂದೂರ್‌ವೆಲ್ ಸರ್ಕಲ್‌ನಲ್ಲಿ ವಾಹನಕ್ಕಾಗಿ ಕಾದು ನಿಂತಿರುವ ಸಮಯದಲ್ಲಿ ಸಿಕೆಎಸ್–4068 ಸಂಖ್ಯೆಯ ಮಾರುತಿ 800 ವಾಹನ ಬರುತ್ತಿರುವುದನ್ನು ಕಂಡು ಅದನ್ನು ನಿಲ್ಲಿಸಲು ಸೂಚಿಸಿದಾಗ ವಾಹನವು ನಿಲ್ಲಿಸದೇ ವೇಗವಾಗಿ ಮುಂದಕ್ಕೆ ಚಲುಸುತ್ತಿರುವುದನ್ನು ಕಂಡು ಸದರಿ ವಾಹನವನ್ನು ಇಲಾಖಾ ವಾಹನದಲ್ಲಿ ಬೆನ್ನಟ್ಟಿ ನಂತೂರು ಸರ್ಕಲ್ ಬಳಿ ವಾಹನವನ್ನು ಅಡ್ಡಗಟ್ಟಿ ನಿಲ್ಲಿಸಿ ಪರಿಶೀಲನೆ ಮಾಡಿದಾಗ ವಾಹನದಲ್ಲಿ ಚಾಲಕ ಹಾಗೂ ಇನ್ನಿಬ್ಬರು ವ್ಯಕ್ತಿಗಳಿದ್ದು ಚಾಲಕನಲ್ಲಿ ವಾಹನದಲ್ಲಿ ಏನಿದೆ ಎಂದು ವಿಚಾರಿಸಲಾಗಿ ವಾಹನದಲ್ಲಿ ಮದ್ಯ ಇರುವುದೆಂದು ತಿಳಿಸಿದ್ದು, ವಾಹನವನ್ನು ಸರ್ಚ್ ಮಾಡಲು ನ್ಯಾಯಾಲಯದಿಂದ ಸರ್ಚ್ ವಾರೆಂಟ್ ತೆಗೆದುಕೊಳ್ಳಲು ಸಾಕಷ್ಟು ಕಲಾವಕಾಶವಿಲ್ಲದೇ ಇರುವುದರಿಂದ ಸ್ಥಳದಲ್ಲಿಯೇ ಸರ್ಚ್ ಮೆಮೋವನ್ನು ತಯಾರಿಸಲಾಯಿತು. ಸದರಿ ಸರ್ಚ್ ಮೆಮೋವನ್ನು ನಿಶಾನೆ ಪಿ–1 ಎಂದು ಗುರುತಿಸಲಾಯಿತು. ನಂತರ ಸದರಿ ವಾಹನದಲ್ಲಿರುವ ಚಾಲಕ ಹಾಗೂ ಎದುರು ಸೀಟಿನಲ್ಲಿ ಓರ್ವ ವ್ಯಕ್ತಿ ಮತ್ತು ಹಿಂದಿನ ಸೀಟಿನಲ್ಲಿ ಇನ್ನೊರ್ವ ವ್ಯಕ್ತಿ ಕುಳಿತ್ತಿದ್ದು, ಆತನ ಪಕ್ಕದಲ್ಲಿ ಆರು ರಟ್ಟಿನ ಪೆಟ್ಟಿಗೆಗಳಲ್ಲಿ ಮದ್ಯ ಇರುವುದು ಕಂಡುಬಂತು. ಸದರಿ ಮದ್ಯವನ್ನು ಕೊಂಡೊಯ್ಯಲು ಪರವಾನಿಗೆ ಇದೆಯೇ ಎಂದು ಕೇಳಿದಾಗ ಯಾವುದೇ ದಾಖಲಾತಿಗಳು ಇಲ್ಲವೆಂದು ತಿಳಿಸಿರುತ್ತಾನೆ. ನಂತರ ಸದರಿ ಪೆಟ್ಟಿಗೆಗಳನ್ನು ತೆರೆದು ನೋಡಿದಾಗ ಅದರಲ್ಲಿ ಮೈಸೂರು ಲ್ಯಾನ್ಸರ್ ಎಂಬ ಹೆಸರಿನ ವಿಸ್ಕಿ ಇದ್ದು, ಅದರ ಮೇಲೆ ಭದ್ರತಾ ಚೀಟಿ ಇಲ್ಲದೇ ಇರುವುದು ಕಂಡು ಬಂಧಿದ್ದು, ಇದನ್ನು ನಕಲಿ ಮದ್ಯವೆಂದು ಖಾತರಿಪಡಿಸಿಕೊಳ್ಳಲಾಯಿತು. ಸದರಿ ಪ್ರತಿ ಪೆಟ್ಟಿಗೆಯಲ್ಲಿ 750 ಎಂಎಲ್‌ನ 12 ಬಾಟಲಿಗಳಂತೆ ಆರು ರಟ್ಟಿನ ಪೆಟ್ಟಿಗೆಗಳಲ್ಲಿ ಒಟ್ಟು 72 ಬಾಟಲಿಗಳು ಇದ್ದು ಒಟ್ಟು 54.000 ಲೀಟರು ಮದ್ಯ ಇದ್ದು, ಸದರಿ ನಕಲಿ ಮದ್ಯವನ್ನು ವಶಪಡಿಸಿಕೊಂಡು ನಂತರ ಚಾಲಕನ ಹೆಸರು ಕೇಳಲಾಗಿ ರಾಜೇಶ್ ರಾವ್, ಪ್ರಾಯ:24 ವರ್ಷ, ಬಿನ್ ದಿ:ಆನಂದರಾವ್, ಕುಕ್ಕದೂರು ಗ್ರಾಮ, ಕಾರ್ಕಳ ತಾಲ್ಲೂಕು ಎಂದು ಹೇಳಿಕೆ ನೀಡಿರುತ್ತಾನೆ. ಸೀಟಿನ ಮುಂಭಾಗದಲ್ಲಿದ್ದ ಇನ್ನೊರ್ವ ವ್ಯಕ್ತಿಯ ಹೆಸರು ಕೇಳಲಾಗಿ ರಮೇಶ್ ಶೆಟ್ಟಿ,

ಪ್ರಾಯ-19, ಬಿನ್ ರಾಜೇಶ್ ಶೆಟ್ಟಿ, ಪಡ್ಪು ಹೌಸ್, ಕಾರ್ಕಳ ತಾಲ್ಲೂಕು ಎಂದು ತಿಳಿಸಿರುತ್ತಾನೆ. ನಂತರ ಕಾರಿನ ಹಿಂಬದಿ ಸೀಟಿನಲ್ಲಿ ಕುಳಿತ್ತಿದ್ದ ವ್ಯಕ್ತಿಯ ಹೆಸರು ಕೇಳಲಾಗಿ ತನ್ನ ಹೆಸರು ದಿನೇಶ್ ಆಚಾರಿ ಪ್ರಾಯ 18 ವರ್ಷ, ಬಿನ್ ಆನಂದ ಆಚಾರಿ, ಕುಕ್ಕಂದೂರು ಗ್ರಾಮ, ಕಾರ್ಕಳ ತಾಲ್ಲೂಕು ಎಂದು ತಿಳಿಸಿರುತ್ತಾನೆ. ಸದರಿ ಸಿಕ್ಕಿದ ಸೊತ್ತುಗಳನ್ನು ನಕಲಿ ಮದ್ಯದ ಪ್ರತಿಯೊಂದು ರಟ್ಟಿನ ಪೆಟ್ಟಿಗೆಯಿಂದ 750 ಎಂಎಲ್‌ನ ಒಂದು ಬಾಟಲಿಯಂತೆ ಒಟ್ಟು 6 ಬಾಟಲಿಗಳನ್ನು ರಾಸಾಯನಿಕ ವಿಶ್ಲೇಷಣೆಗಾಗಿ ತೆಗೆದು ಮುಚ್ಚಳಕ್ಕೆ ಬಟ್ಟೆ ದಾರ ಕಟ್ಟಿ ಇಲಾಖಾ ಸೀಲು ಮಾಡಿ ಮಾದರಿ ಮೊಹರನ್ನು ಮತ್ತು ಮಹಜರನ್ನು ಸ್ಥಳದಲ್ಲಿಯೇ ತಯಾರಿಸಲಾಯಿತು. ತಯಾರಿಸಲಾದ ಮಹಜರನ್ನು ಈಗ ಗುರುತಿಸಿದ್ದು ಅದನ್ನು ನಿಶಾನೆ ಪಿ-2 ಎಂದು ಅದರ ಮೇಲಿನ ಸಹಿಯನ್ನು ನಿಶಾನೆ ಪಿ-2ಎ ಎಂದು ಗುರುತಿಸಲಾಯಿತು. ಸೊತ್ತು ಪಟ್ಟಿ ತಯಾರಿಸಲಾಯಿತು. ಅದನ್ನು ನಿಶಾನೆ ಪಿ-3 ಎಂದು ಮಾದರಿ ಮೊಹರನ್ನು ನಿಶಾನೆ ಪಿ-4 ಎಂದು ಗುರುತಿಸಲಾಯಿತು. ನಂತರ ಆರೋಪಿಯ ಹೆಸರು, ವಿಳಾಸ ಇರುವ ಗುರುತು ಚೀಟಿಯನ್ನು ಎಲ್ಲಾ ವಸ್ತುಗಳಿಗೆ ಹಾಗೂ ರಾಸಾಯನಿಕ ಪರೀಕ್ಷೆಗಾಗಿ ತೆಗೆದ ಮಾದರಿ ಸೀಸೆಗಳಿಗೆ ಅಂಟಿಸಲಾಯಿತು. ನಂತರ ದೊರೆತ ನಕಲಿ ಮದ್ಯವನ್ನು ಹಾಗೂ ಕಾರನ್ನು ಮತ್ತು ಆರೋಪಿಗಳನ್ನು ಇಲಾಖಾ ವಶಕ್ಕೆ ಪಡೆದುಕೊಳ್ಳಲಾಯಿತು. ನಂತರ ಕಛೇರಿಗೆ ಬಂದು ಪ್ರ.ಮಾ. ವರದಿಯನ್ನು ತಯಾರಿಸಿದೆನು. ಇದನ್ನು ನೋಡಿ ನಿಶಾನೆ ಪಿ-5 ಎಂದು ಗುರುತಿಸಿ ಅದರ ಮೇಲಿನ ಸಹಿಯನ್ನು ನಿಶಾನೆ ಪಿ-5 ಎಂದು ಗುರುತಿಸಲಾಯಿತು. ಸೊತ್ತು ಪಟ್ಟಿಯೊಂದಿಗೆ ಪ್ರಥಮ ಮಾಹಿತಿ ವರದಿಯನ್ನು ಹಾಗೂ ಆರೋಪಿಗಳನ್ನು ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು.

ಪ್ರಕರಣದ ಮುಂದಿನ ತನಿಖೆಯನ್ನು ಕೈಗೊಂಡು ಜಪ್ತು ಪಡಿಸಿದ ಮದ್ಯವನ್ನು ರಾಸಾಯನಿಕ ಪರೀಕ್ಷೆಗೆ ಒಳಪಡಿಸಿ, ಮಾದರಿಗಳನ್ನು ದಿನಾಂಕ:15.10.2007ರಂದು ಅಬಕಾರಿ ರಕ್ಷಕರಾದ ಶ್ರೀ ಯು. ಉಮೇಶ್ ಇವರ ಮುಖಾಂತರ ಕಳುಹಿಸಿಕೊಟ್ಟು ರಾಸಾಯನಿಕ ವಿಶ್ಲೇಷಣಾ ವರದಿಯನ್ನು ದಿನಾಂಕ:07.11.2007ರಂದು ಕಛೇರಿಯಲ್ಲಿ ಪಡೆದುಕೊಂಡಿರುತ್ತೇನೆ. ರಾಸಾಯನಿಕ ವಿಶ್ಲೇಷಣಾ ವರದಿ ಪ್ರತಿಯನ್ನು ನೋಡಿ ನಿಶಾನೆ ಪಿ-6 ಎಂದು ಗುರುತಿಸಲಾಯಿತು. ಪ್ರಕರಣದಲ್ಲಿ ಜಪ್ತುಪಡಿಸಿದ ವಾಹನದ ಬಗ್ಗೆ ಬಿ ರಿಜಿಸ್ಟಾರ್ ವರದಿ ಒದಗಿಸುವಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಉಡುಪಿ ಜಿಲ್ಲೆ ಇವರಿಗೆ 24.10.2007ರಂದು ಪತ್ರ ಬರೆಯಲಾಗಿದೆ. ಪ್ರಕರಣದ ಸೊತ್ತುಗಳನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಅಧಿಕೃತ ಅಧಿಕಾರಿಗಳು ಹಾಗೂ ಅಬಕಾರಿ ಉಪ ಆಯುಕ್ತರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರಿಗೆ ದಿನಾಂಕ:29.07.2008ರಂದು ಪ್ರಸ್ತಾವನೆಯನ್ನು ಸಲ್ಲಿಸಿರುತ್ತೇನೆ. ಇದನ್ನು ನೋಡಿ ನಿಶಾನೆ ಪಿ-7 ಎಂದು ಗುರುತಿಸಲಾಯಿತು. ಪ್ರಕರಣದ ತನಿಖೆಯನ್ನು ಪೂರ್ಣಗೊಳಿಸಿ ಮಾನ್ಯ ಜೆ.ಎಂ.ಎಫ್.ಸಿ. 3ನೇ ನ್ಯಾಯಾಲಯ ಮಂಗಳೂರು ಇವರಿಗೆ ದಿನಾಂಕ:26.07.2008 ರಂದು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದು ಸಾಕ್ಷಿ ನೀಡಿರುತ್ತಾರೆ.

ಆದರೆ ವಾಹನದ ಮಾಲೀಕರು ಈ ಪ್ರಾಧಿಕಾರದ ಮುಂದೆ ತನ್ನ ನಿರುಪರಾಧಿತ್ವವನ್ನು ಸಾಭೀತುಪಡಿಸುವ ಬಗ್ಗೆ ಅಗತ್ಯ ದಾಖಲಾತಿಗಳೊಂದಿಗೆ ಹಾಜರಾಗದೇ ಇರುವ ಪ್ರಯುಕ್ತ ಪಾಟೀ ಸವಾಲು ಇಲ್ಲವೆಂದು ಪರಿಗಣಿಸಲಾಗಿದೆ.

1965ನೇ ಕರ್ನಾಟಕ ಅಬಕಾರಿ ಕಾಯಿದೆಯಡಿಯಲ್ಲಿ ಪ್ರಕರಣವನ್ನು ದಾಖಲು ಮಾಡುವಾಗ ಆರೋಪಿಯು ಪತ್ತೆಯಾಗದಿದ್ದಲ್ಲಿ ಅಥವಾ ಪತ್ತೆಯಾಗುವ ಸಾಧ್ಯತೆಯಿಲ್ಲದಿದ್ದಲ್ಲಿ, ಪ್ರಕರಣವನ್ನು ಪತ್ತೆ ಹಚ್ಚಿದ ಒಂದು ತಿಂಗಳಲ್ಲಿ ಯಾವುದೇ ವ್ಯಕ್ತಿಯು ಪ್ರಾಧಿಕಾರದ ಮುಂದೆ ಹಾಜರಾಗಿ ಅಪರಾಧದಲ್ಲಿ ಜಪ್ತಾಗಿರುವ ಸೊತ್ತುಗಳು ತಮ್ಮದೆಂದು, ಅವುಗಳು ಕಾನೂನುಬದ್ಧವಾಗಿದೆಯೆಂದು ಸಾಕ್ಷ್ಯಾಧಾರದೊಂದಿಗೆ ಸಾಬೀತುಪಡಿಸದೇ ಇದ್ದಲ್ಲಿ, ಸದರಿ ಸೊತ್ತುಗಳು ಕರ್ನಾಟಕ ಅಬಕಾರಿ ಕಾಯಿದೆ ಕಲಂ 43ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಯೋಗ್ಯವಾಗಿರುವ ಸೊತ್ತುಗಳಾಗಿದ್ದಲ್ಲಿ, ಅಂತಹ ಸೊತ್ತುಗಳನ್ನು ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಬಹುದಾಗಿರುತ್ತದೆ.

ಈ ಪ್ರಕರಣದ ಫಿರ್ಯಾದುದಾರರು ಪೂರಕವಾಗಿ ನೀಡಿರುವ ಸಾಕ್ಷಧಾರದ ಮೇಲೆ ಹಾಗೂ ಲಭ್ಯವಿರುವ ದಾಖಲಾತಿಗಳಿಂದ ದಿನಾಂಕ:20.09.2007ರಂದು ಜಪ್ತುಪಡಿಸಿರುವ ಮಾರುತಿ 800 ಕಾರು ಸಂಖ್ಯೆ: ಸಿಕೆಎಸ್-4068 ಇದರಲ್ಲಿ ಯಾವುದೇ ರಹದಾರಿ ಇಲ್ಲದೇ ಅಕ್ರಮವಾಗಿ ಮದ್ಯವನ್ನು ಸಾಗಾಟ ಮಾಡಿರುವ ಬಗ್ಗೆ ಅಭಿಯೋಗ ಪರ ಪಿಡಬ್ಲ್ಯೂ-1ರವರು ನೀಡಿದ ಸಾಕ್ಷಿ ಹಾಗೂ ದಾಖಲಾತಿಗಳಿಂದ ದೃಢಪಟ್ಟಿರುವುದರಿಂದ ಹಾಗೂ ವಾಹನದ ಮಾಲೀಕರು ತನ್ನ ನಿರುಪರಾಧಿತ್ವವನ್ನು ಸಾಭೀತುಪಡಿಸುವರೇ ಯಾವುದೇ ದಾಖಲಾತಿಗಳನ್ನು ಪ್ರಾಧಿಕಾರದ ಮುಂದೆ ಹಾಜರುಪಡಿಸಲು ವಿಫಲರಾಗಿರುವುದರಿಂದ ಒಂದನೇ ಅಂಶವನ್ನು ಗುಣಾತ್ಮಕವಾಗಿ ಪರಿಗಣಿಸಲಾಗಿದೆ.

ಇದು ಅಕ್ರಮ ಮದ್ಯ ತನ್ನ ತಿಳುವಳಿಕೆಗೆ ಬಾರದೇ ನಡೆದಿದೆ ಎಂಬುದನ್ನು ಸಾಕ್ಷ್ಯಾಧಾರಗಳೊಂದಿಗೆ ಸಾಭೀತುಪಡಿಸುವುದು ವಾಹನ ಮಾಲೀಕರ ಆದ್ಯ ಹೊಣೆಗಾರಿಕೆಯಾಗಿರುತ್ತದೆ. ಆದರೆ ಈ ಪ್ರಕರಣದ ವಾಹನದ ಮಾಲೀಕರಿಗೆ ಕಲಂ 43(ಬಿ) ಅಡಿಯಲ್ಲಿ ನೋಂದಾಯಿತ ಅಂಚೆ ಮೂಲಕ ನೀಡಲಾದ ಕಾರಣ ಕೇಳಿ ನೋಟೀಸು ಜಾರಿಯಾಗದಿದ್ದರೂ, ಅಬಕಾರಿ ನಿರೀಕ್ಷಕರು, ಮಂಗಳೂರು ಉತ್ತರ ವಲಯ-1 ಇವರ ಮುಖೇನಾ ನೀಡಲಾದ ಕಾರಣ ಕೇಳಿ ನೋಟೀಸು ಆರ್.ಸಿ. ಮಾಲೀಕರಾದ ಶ್ರೀ ಅರವಿಂದ ಶೆಣೈ ಇವರಿಗೆ ಖುದ್ದಾಗಿ ಜಾರಿಯಾಗಿದ್ದು, ಸುಮಾರು ಐದು ತಿಂಗಳು ಕಳೆದಿದ್ದರೂ ಕಾರಣ ಕೇಳಿ ನೋಟೀಸಿಗೆ ಯಾವುದೇ ಸಮಜಾಯಿಷಿ ಉತ್ತರ ನೀಡದೇ ಇರುವುದು ಹಾಗೂ ವಾಹನ ಜಪ್ತಾಗಿ ಸುಮಾರು 1 ವರ್ಷ 3 ತಿಂಗಳುಗಳು ಕಳೆದಿದ್ದರೂ ವಾಹನದ ಮಾಲೀಕರು ತನ್ನ ವಾಹನವನ್ನು ಪಡೆದುಕೊಳ್ಳುವ ಬಗ್ಗೆ ಕಾನೂನು ರೀತ್ಯಾ ಯಾವುದೇ

ಕ್ರಮಕೈಗೊಳ್ಳದೇ ಇರುವುದು ಹಾಗೂ ವಾಹನದ ಮಾಲೀಕರು ಈ ಪ್ರಾಧಿಕಾರದ ಮುಂದೆ ಹಾಜರಾಗಿ ಸಾಕ್ಷ್ಯಾಧಾರಗಳೊಂದಿಗೆ ವಾಹನವನ್ನು ತನ್ನ ತಿಳುವಳಿಕೆಗೆ ಬಾರದೇ ಅಕ್ರಮ ಮದ್ಯ ಸಾಗಾಣಿಕೆಗೆ ಉಪಯೋಗಿಸಲಾಗಿದೆ ಎಂದು ರುಜುವಾತುಪಡಿಸಲು ವಿಫಲರಾಗಿರುವುದನ್ನು ಪರಿಗಣಿಸಿದಾಗ, ವಾಹನದ ಮಾಲೀಕರು ತನ್ನ ತಿಳುವಳಿಕೆಯಿಂದಲೇ ತನ್ನ ವಾಹನದಲ್ಲಿ ಅಕ್ರಮವಾಗಿ ಮದ್ಯ ಸಾಗಾಣಿಕೆ ಮಾಡಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದಲ್ಲದೆ ಈ ಪ್ರಾಧಿಕಾರದ ಮುಂದೆ ಹಾಜರಾಗದೇ ಇರುವುದನ್ನು ಗಮನಿಸಿದಾಗ ವಾಹನ ಮಾಲೀಕರು ತನ್ನ ತಿಳುವಳಿಕೆಯಿಂದಲೇ ವಾಹನವನ್ನು ಅಕ್ರಮ ಮದ್ಯ ಸಾಗಾಣಿಕೆಗೆ ಬಳಸಿರುವುದು ನಿಸ್ಸಂದೇಹವಾಗಿ ಸಾಬೀತಾಗಿರುತ್ತದೆ. ಈ ಮೇಲಿನ ಕಾರಣಗಳಿಂದ ಎರಡನೇ ಅಂಶವನ್ನು ನಕಾರಾತ್ಮಕವಾಗಿ ಪರಿಗಣಿಸಿದೆ.

ಈ ಮೇಲಿನ ಎಲ್ಲಾ ಕಾರಣಗಳಿಂದ ಹಾಗೂ ಲಭ್ಯವಿರುವ ದಾಖಲಾತಿಗಳಿಂದ ಈ ಪ್ರಕರಣದಲ್ಲಿ ಜಪ್ತುಪಡಿಸಲಾಗಿರುವ ಮಾರುತಿ 800 ಕಾರನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಯೋಗ್ಯವಾಗಿ ಕಂಡು ಬಂದಿರುವುದರಿಂದ ಈ ಪ್ರಕರಣದಲ್ಲಿ ಜಪ್ತುಪಡಿಸಲಾಗಿರುವ ಮಾರುತಿ 800 ಕಾರು ಸಂಖ್ಯೆ: ಸಿಕೆಎಸ್–4068ನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಈ ಕೆಳಗಿನಂತೆ ಆದೇಶ ಹೊರಡಿಸಲಾಗಿದೆ.

ಆದೇಶ

ನೂರ್ ಮಹಮ್ಮದ್ ಹುಸೇನ್, ಅಧಿಕೃತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಆದ ನಾನು ಕರ್ನಾಟಕ ಅಬಕಾರಿ ಕಾಯಿದೆ 1965ನೇ ಕಲಂ 43(ಎ) ಅಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ನಿಯಮ 43(ಬಿ) ರಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ, ಅಬಕಾರಿ ಉಪ ನಿರೀಕ್ಷಕರು (1) ಮಂಗಳೂರು ಉತ್ತರ ವಲಯ–1 ಇವರ ತಕ್ಷೀರು ಸಂಖ್ಯೆ:9/2007–08 ದಿನಾಂಕ:20.09.2007ರಲ್ಲಿ ಜಪ್ತುಪಡಿಸಿಕೊಂಡಿರುವ ಮಾರುತಿ 800 ಕಾರು ಸಂಖ್ಯೆ: ಸಿಕೆಎಸ್–4068 (ಚಾಸೀಸ್ ನಂ.SB308IN289073 ಇಂಜಿನ್ ನಂ.397999)ನ್ನು ನಿಯಮ 43ಎ(2) ರನ್ವಯ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶ ನೀಡಿರುತ್ತೇನೆ.

ಈ ಆದೇಶವನ್ನು ದಿನಾಂಕ:30.12.2008ರಂದು ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶ ಕುರಿತು ವಾಹನದ ವಿಲೆಯನ್ನು ಇಂದಿನಿಂದ 30 ದಿವಸಗಳ ನಂತರ ಜಾರಿಯಲ್ಲಿ ತರಲು ಆದೇಶಿಸಿದೆ.

ನೂರ್ ಮಹಮ್ಮದ್ ಹುಸೇನ್
ಅಧಿಕೃತ ಅಧಿಕಾರಿಗಳು ಹಾಗೂ ಡೆಪ್ಯೂಟಿ ಕಮೀಷನರ್
ಆಫ್ ಎಕ್ಸೈಜ್, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಅನುಬಂಧ–I

ಫಿರ್ಯಾದುದಾರರ ಪರ ಮಂಡಿಸಲಾದ ಸಾಕ್ಷಿಗಳ ವಿವರ:

ಪ್ರಾ.ಸಾ–1 : ಶ್ರೀ ವಿನೋದ್‌ಕುಮಾರ್, ಅಬಕಾರಿ ಉಪ ನಿರೀಕ್ಷಕರು(1), ಮಂಗಳೂರು ಉತ್ತರ ವಲಯ–1.

ಅನುಬಂಧ–II

ಫಿರ್ಯಾದುದಾರರ ಪರ ಮಂಡಿಸಲಾದ ದಾಖಲೆಗಳು:

ನಿಶಾನೆ ಪಿ–1 : ಸರ್ಚ್ ಮೆಮೊ
ನಿಶಾನೆ ಪಿ–2 : ಮಹಜರು ಪ್ರತಿ
ನಿಶಾನೆ ಪಿ–2ಎ: ಮಹಜರು ಮೇಲಿನ ಸಾಕ್ಷಿಗಳ ಸಹಿ
ನಿಶಾನೆ ಪಿ–3 : ಜಪ್ತುಪಡಿಸಿದ ಸೊತ್ತುಗಳ ಪಟ್ಟಿ
ನಿಶಾನೆ ಪಿ–4 : ಮಾದರಿ ಮೊಹರು
ನಿಶಾನೆ ಪಿ–5 : ಪ್ರಥಮ ವರ್ತಮಾನ ವರದಿ
ನಿಶಾನೆ ಪಿ–5ಎ : ಅದರ ಮೇಲಿನ ಸಹಿ
ನಿಶಾನೆ ಪಿ–6 : ರಾಸಾಯನಿಕ ವಿಶ್ಲೇಷಣಾ ವರದಿ.
ನಿಶಾನೆ ಪಿ–7 : ತನಿಖಾ ವರದಿ ದಿನಾಂಕ:29.07.2008

ಅನುಬಂಧ–III

ವಾಹನ ಮಾಲೀಕರ ಪರವಾಗಿ ವಿಚಾರಣೆ ಮಾಡಲಾದ ಸಾಕ್ಷಿದಾರರು:

ಅರ್ಜಿದಾರರ ಹೇಳಿಕೆ: – ಯಾವುದು ಇಲ್ಲ–

ಅನುಬಂಧ–IV

ವಾಹನ ಮಾಲೀಕರ ಪರವಾಗಿ ಗುರುತಿಸಲಾದ ದಾಖಲೆಗಳು: – ಯಾವುದು ಇಲ್ಲ–

ನೂರ್ ಮಹಮ್ಮದ್ ಹುಸೇನ್
ಅಧಿಕೃತ ಅಧಿಕಾರಿಗಳು ಹಾಗೂ ಡೆಪ್ಯೂಟಿ ಕಮೀಷನರ್
ಆಫ್ ಎಕ್ಸೈಜ್, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಪಿ.ಆರ್.84

ಅಧಿಕಾರಿಯುತ ಅಧಿಕಾರಿಗಳು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳವರ ನ್ಯಾಯಾಲಯ, ಭದ್ರಾವತಿ ವಿಭಾಗ, ಭದ್ರಾವತಿ

ಅಧಿಸೂಚನೆ

ಸಂಖ್ಯೆ: ಎ3-ಸಿಓಎನ್-ಸಿಆರ್-2/2009-10, ದಿನಾಂಕ:15ನೇ ಮೇ, 2009

ಭದ್ರಾವತಿ ವಿಭಾಗದ ವ್ಯಾಪ್ತಿಯಲ್ಲಿ ಅರಣ್ಯ ಅಪರಾಧ ಪ್ರಕರಣ ಸಂಬಂಧ ಕೆಳಕಂಡ ವಾಹನಗಳನ್ನು ವಲಯ ಅರಣ್ಯಾಧಿಕಾರಿ, ಚನ್ನಗಿರಿ ವಲಯದ ಸಿಬ್ಬಂದಿ ವರ್ಗದವರು ಸರ್ಕಾರದ ಪರ ಅಮಾನತ್ತುಪಡಿಸಿಕೊಂಡು ಕರ್ನಾಟಕ ಅರಣ್ಯ ಕಾಯಿದೆ 1963ರ ಸೆಕ್ಷನ್-71(ಎ)ರ ಪ್ರಕಾರ ಕ್ರಮ ಜರುಗಿಸುವಂತೆ ಈ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತಾರೆ.

ಕ್ರ. ಸಂ.	ಮೊಕದ್ದಮೆ ಸಂಖ್ಯೆ	ವಾಹನಗಳ ವಿವರ	ಯಂತ್ರದ ಸಂಖ್ಯೆ	ಛಾಸೀಸ್ ಸಂಖ್ಯೆ
1.	ವಲಯ ಅರಣ್ಯಾಧಿಕಾರಿ, ಚನ್ನಗಿರಿ ಅರಣ್ಯ ಮೊಕದ್ದಮೆ ನಂ.30/2009-10 ದಿನಾಂಕ:11.05.2009	ಬಿಳಿ ಅಂಬಾಸಿಡರ್ ಸಂ.ಸಿಕೆಪಿ-9984,	R-6K-0307640	B-11K-427172
		ನೀಲಿ ಬಣ್ಣದ ಲಗೇಜ್ ಆಟೋ ಸಂ: ಕೆಎ-35-8716	ಇಂಜಿನ್ ನಂ.40 (ಸ್ಪಷ್ಟವಾಗಿ ಕಾಣುತ್ತಿಲ್ಲ)	363114
		ಜನರೇಟರ್		

ಈ ಮೇಲ್ಕಂಡ ವಾಹನದ ನಿಜವಾದ ವಾರಸುದಾರರು ಯಾರಾದರೂ ಇದ್ದಲ್ಲಿ ಅವರು ವಾಹನಗಳ ಬಗ್ಗೆ ಅಧಿಕೃತ ಹಕ್ಕು ಬಾಧ್ಯತೆಗಳನ್ನು ಈ ಕೆಳಸಹಿ ಮಾಡಿರುವವರ ಸಮ್ಮುಖದಲ್ಲಿ ಈ ಅಧಿಸೂಚನೆಯು ಕರ್ನಾಟಕ ಸರ್ಕಾರದ ಗೆಜೆಟ್‌ನಲ್ಲಿ ಪ್ರಕಟವಾದ ದಿನಾಂಕದಿಂದ ಮೂವತ್ತು (30) ದಿನಗಳ ಒಳಗೆ ಹಾಜರುಪಡಿಸಬೇಕಾಗಿ ಮತ್ತು ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳಸಾಗಾಣಿಕೆ ಮಾಡಲು ಉಪಯೋಗಿಸಿದ್ದಕ್ಕಾಗಿ ಏಕೆ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಬಾರದು ಎಂಬುದರ ಬಗ್ಗೆ ಅವರುಗಳು ಅಧಿಕೃತ ಸಮಜಾಯಿಷಿಯನ್ನು ಬರಹದ ಮೂಲಕ ಇತರೆ ದಾಖಲಾತಿಗಳೊಂದಿಗೆ ಈ ಕೆಳಸಹಿದಾರರ ಸಮ್ಮುಖದಲ್ಲಿ ಹಾಜರುಪಡಿಸಲು ಈ ಮೂಲಕ ಪ್ರಕಟಿಸಲಾಗಿದೆ. ಮೇಲ್ಕಾಣಿಸಿದ ಅವಧಿಯೊಳಗೆ ಲಿಖಿತ ಮೂಲಕ ಯಾವುದೇ ಅರ್ಜಿಯನ್ನು ಈ ಕೆಳಸಹಿದಾರರಿಗೆ ಸಲ್ಲಿಸದೇ ಇದ್ದಲ್ಲಿ ಈ ವಾಹನಗಳನ್ನು ಕರ್ನಾಟಕ ಅರಣ್ಯ ಕಾಯಿದೆ 1963ರ ಸೆಕ್ಷನ್ 71(ಎ) ಎರಡನೇ ತಿದ್ದುಪಡಿ ಪ್ರಕಾರ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ಟಿ. ಹೀರಾಲಾಲ್
ಉಪ ಅರಣ್ಯ ಸಂರಕ್ಷಣಾಧಿಕಾರಿ,
ಭದ್ರಾವತಿ ವಿಭಾಗ, ಭದ್ರಾವತಿ.

ಪಿ.ಆರ್.431

ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳ ಕಛೇರಿ, ಹಾಸನ ಜಿಲ್ಲೆ, ಹಾಸನ

ಪ್ರಕಟಣೆ

ಸಂ/ಜಿಸಕಅ/ಡಿ5/ಸಿಆರ್7/09-10, ದಿನಾಂಕ:20ನೇ ಮೇ, 2009

ವಿಷಯ: 2009-10ನೇ ಸಾಲಿಗೆ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ಕಾನೂನು ಪದವೀಧರರಿಗೆ ಆಡಳಿತ ನ್ಯಾಯಾಧೀಕರಣದಲ್ಲಿ ತರಬೇತಿ ನೀಡಲು ಅರ್ಜಿಗಳನ್ನು ಆಹ್ವಾನಿಸುವ ಕುರಿತು.

ಉಲ್ಲೇಖ: 1) ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂ/681/ಎಸ್‌ಡಬ್ಲ್ಯೂ89/ಬೆಂಗಳೂರು ದಿನಾಂಕ:02.01.1990.

2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರ ಪತ್ರ ಸಂ / ಸಕನಿ / ಸಿಎಸ್/1/ಸಿಆರ್36/07-08 ದಿನಾಂಕ:04.10.2008.

3) ದಿನಾಂಕ:12.05.2009 ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ಇವರ ಅಧ್ಯಕ್ಷತೆಯಲ್ಲಿ ನಡೆದ ಎಂಪಿಐಸಿ ಸಭಾ ನಡವಳಿ.

ಉಲ್ಲೇಖದ ಸರ್ಕಾರಿ ಆದೇಶಾನುಸಾರ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ಕಾನೂನು ಪದವೀಧರರಿಗೆ ವಕೀಲ ವೃತ್ತಿ ಮತ್ತು ನ್ಯಾಯಾಂಗ ಸೇವೆಗೆ ಸಂಬಂಧಿಸಿದಂತೆ ಆಡಳಿತ ನ್ಯಾಯಾಧೀಖರಣದಲ್ಲಿ 4 ವರ್ಷಗಳ ತರಬೇತಿ ನೀಡುವ ಕುರಿತು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಂತೆ ಇಚ್ಛೆಯುಳ್ಳ ಅರ್ಹ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ಕಾನೂನು ಪದವೀಧರರಿಂದ 2009-10ನೇ ಸಾಲಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ನಿಬಂಧನೆಗಳು:

1) ಅಭ್ಯರ್ಥಿಗಳು ಪ.ಜಾತಿ/ ಪ.ವರ್ಗಕ್ಕೆ ಸೇರಿದವರಾಗಿರಬೇಕು. ಅದಕ್ಕೆ ಸಂಬಂಧಿಸಿದಂತೆ ಜಾತಿ ಪತ್ರದ ದೃಢೀಕೃತ ಪ್ರತಿಯನ್ನು ಲಗತ್ತಿಸುವುದು.

2) ಹಾಸನ ಜಿಲ್ಲೆಗೆ ಸಂಬಂಧಿಸಿದ ಹಾಗೂ ವಕೀಲ ವೃತ್ತಿ ನಡೆಸಲು ಅರ್ಹತೆಯುಳ್ಳ ಕಾನೂನು ಪದವೀಧರರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

3) ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ 2 ವರ್ಷದೊಳಗೆ ಕಾನೂನು ಪದವಿಯಲ್ಲಿ ತೇರ್ಗಡೆಯಾದವರು ಮಾತ್ರ ಈ ತರಬೇತಿಗೆ ಅರ್ಹರಾಗಿರುತ್ತಾರೆ. 2 ವರ್ಷಕ್ಕೂ ಮೇಲ್ಪಟ್ಟ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅರ್ಜಿಯೊಂದಿಗೆ ಈ ಬಗ್ಗೆ ಕಾನೂನು ಪದವಿಯ ಅಂಕಪಟ್ಟಿಗಳ ದೃಢೀಕೃತ ಪ್ರತಿಯನ್ನು ಲಗತ್ತಿಸುವುದು.

4) ಆಯ್ಕೆಯಾದ ಅಭ್ಯರ್ಥಿಗಳಿಗೆ 4 ವರ್ಷಗಳ ನ್ಯಾಯಾಂಗ ಆಡಳಿತ ತರಬೇತಿಯನ್ನು ಸರ್ಕಾರಿ ವಕೀಲರು ಪಬ್ಲಿಕ್ ಪ್ರಾಸಿಕ್ಯೂಟರ್ ಮತ್ತು 20 ವರ್ಷಗಳ ಅನುಭವ ಹೊಂದಿರುವ ಹಿರಿಯ ವಕೀಲರ ಅಧೀನದಲ್ಲಿ ನೀಡಲಾಗುವುದು.

5) ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಹೆಯಾನ 1000/- ತರಬೇತಿ ಭತ್ಯೆ ನೀಡಲಾಗುವುದು.

6) ಅಭ್ಯರ್ಥಿಯ ವಯಸ್ಸು ಅರ್ಜಿಗಳನ್ನು ಸ್ವೀಕರಿಸುವ ಕೊನೆಯ ದಿನಾಂಕದಂದು 35 ವರ್ಷಗಳನ್ನು ಮೀರಿರಬಾರದು. ಈ ಕುರಿತು ಅಧಿಕೃತ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ) ಸಲ್ಲಿಸಬೇಕು.

7) ಆಯ್ಕೆಯಾದ ಅಭ್ಯರ್ಥಿಗಳು ಸುಳ್ಳು ಮಾಹಿತಿ ಒದಗಿಸಿದ್ದಲ್ಲಿ ಅಂತಹವರನ್ನು ಕಾನೂನಿನ ಪ್ರಕಾರ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುತ್ತದೆ ಅಥವಾ ತರಬೇತಿಯನ್ನು ಮಧ್ಯೆ ಬಿಟ್ಟು ಹೋದಲ್ಲಿ ಅವರಿಗೆ ನೀಡಿದ ತರಬೇತಿ ಭತ್ಯೆಯ ಹಣವನ್ನು ಶೇ.10 ರಷ್ಟು ಬಡ್ಡಿ ಸೇರಿಸಿ ಭೂ ಕಂದಾಯ ಬಾಕಿ ಎಂದು ಪರಿಗಣಿಸಿ ವಸೂಲಿ ಮಾಡಲಾಗುವುದು. ಈ ಬಗ್ಗೆ ಆಯ್ಕೆಯಾದ ಅಭ್ಯರ್ಥಿಗಳು ಕರಾರು ಪತ್ರವನ್ನು ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು, ಹಾಸನ ಇವರಿಗೆ ಬರೆದುಕೊಡತಕ್ಕದ್ದು.

8) ಪೂರ್ಣ ಭರ್ತಿ ಮಾಡಿದ ಅರ್ಜಿಗಳನ್ನು ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಮಟ್ಟದ ನ್ಯಾಯಾಂಗ ತರಭೇತಿ ಸಮಿತಿ ಹಾಗೂ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಹಾಸನ ಇವರಿಗೆ ದಿನಾಂಕ:20.06.2009ರ ಸಂಜೆ 5.00 ಗಂಟೆಯ ಒಳಗೆ ಸಲ್ಲಿಸತಕ್ಕದ್ದು.

9) ಅಪೂರ್ಣ ಮಾಹಿತಿ ಸಲ್ಲಿಸಿದ ಹಾಗೂ ಅನರ್ಹ ಅರ್ಜಿಗಳನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸುವ ಹಕ್ಕು ಸಮಿತಿಗೆ ಇರುತ್ತದೆ.

10) ಅಭ್ಯರ್ಥಿಗಳು ಬಾರ್ ಕೌನ್ಸಿಲ್‌ನಲ್ಲಿ ತಮ್ಮ ಹೆಸರನ್ನು ನೊಂದಾಯಿಸಿರಬೇಕು. ಈ ಬಗ್ಗೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.

11) ಅರ್ಜಿಗಳಿಗಾಗಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳ ಕಛೇರಿಯನ್ನು ಸಂಪರ್ಕಿಸಲು ತಿಳಿಸಿದೆ.

12) ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯ ಮುಖಾಂತರ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

13) ಆಯ್ಕೆಯಾದ ಅಭ್ಯರ್ಥಿಗಳಿಗೆ 15 ದಿವಸಗಳ ಕಾಲಾವಕಾಶ ನೀಡಿ ಒಪ್ಪಿಗೆ ಪತ್ರ ನೀಡಲು ಸೂಚಿಸಲಾಗುವುದು. 15 ದಿನಗಳೊಳಗೆ ಒಪ್ಪಿಗೆಯ ಕರಾರು ಪತ್ರವನ್ನು ಸಲ್ಲಿಸದೇ ಇದ್ದಲ್ಲಿ ಅಂತವರ ಆಯ್ಕೆಯನ್ನು ರದ್ದುಪಡಿಸಲಾಗುವುದು.

ಜಿಲ್ಲಾ ಸಮಾಜ ಕಲ್ಯಾಣ
ಅಧಿಕಾರಿ, ಹಾಸನ ಜಿಲ್ಲೆ, ಹಾಸನ.

ಪಿ.ಆರ್.433

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ಕಾರ್ಯನಿರ್ವಾಹಕ ಅಭಿಯಂತರರು(ವಿ), ಬೃಹತ್ ಕಾಮಗಾರಿ ವಿಭಾಗ, ಕ.ವಿ.ಪ್ರ.ನಿ.ನಿ, ಗುಲಬರ್ಗಾ

ಪ್ರಕಟಣೆ

ಸಂಖ್ಯೆ: ಎಲ್‌ಸಿ610/ಕಾನಿಅ(ವಿ)ಬೃಕಾವಿ/ಗು/ಸಕಾನಿಅ(ವಿ)/2008-09/121-23, ದಿನಾಂಕ:

ಕ.ವಿ.ಪ್ರ.ನಿ.ನಿ.ಯು 2003ರ ವಿದ್ಯುಚ್ಛಕ್ತಿ ಸರಬರಾಜು ಅಧಿನಿಯಮ ಪ್ರಕರಣದ 67ರ ಅನ್ವಯ ಯೋಜನೆಗಳನ್ನು ರೂಪಿಸಿದೆ ಹಾಗೂ ಸದರಿ ನಿಯಮದ ಪ್ರಕರಣದ 67(2)(ಸಿ)ರ ಅನ್ವಯ ಈ ಮೂಲಕ ಯೋಜನೆಗಳನ್ನು ತಿಳುವಳಿಕೆಗಾಗಿ ಪ್ರಕಟಿಸುತ್ತಿದೆ. ಯೋಜನೆಯ ವಿವರಗಳು ಈ ರೀತಿ ಇವೆ.

1) **ಯೋಜನೆಯ ಹೆಸರು:** ಗುಲಬರ್ಗಾ ಜಿಲ್ಲೆ, ಸೇಡಂ ತಾಲ್ಲೂಕಿನ ಮಳಖೇಡ ರೇಲ್ವೆ ನಿಲ್ದಾಣದ ವ್ಯಾಪ್ತಿಯಲ್ಲಿ ರೇಲ್ವೆ ಮಾರ್ಗ ವಿದ್ಯುದೀಕರಣಗೊಳಿಸುವುದಕ್ಕಾಗಿ 110 ಕೆ.ವಿ. ವಿದ್ಯುತ್ ಕೇಂದ್ರದ ಸ್ಥಾಪನೆ ಮತ್ತು ಹಾಲಿ ಇರುವ 220 ಕೆ.ವಿ. ವಿದ್ಯುತ್ ಕೇಂದ್ರದಿಂದ 110 ಕೆ.ವಿ. ವಿದ್ಯುತ್ ಗೋಪುರಗಳ ಮೇಲೆ 14.81 ಕಿ.ಮೀ. ವಿದ್ಯುತ್ ಮಾರ್ಗ ನಿರ್ಮಾಣ ಮಾಡುವುದು.

2) **ಯೋಜನೆಯ ಪ್ರಯೋಜನಗಳು:** ಭಾರತೀಯ ರೇಲ್ವೆ ಇಲಾಖೆ ರವರ ವತಿಯಿಂದ ಮಳಖೇಡ ರೇಲ್ವೆ ನಿಲ್ದಾಣದ ವ್ಯಾಪ್ತಿಯಲ್ಲಿ ರೇಲ್ವೆ ಮಾರ್ಗವನ್ನು ವಿದ್ಯುದೀಕರಣಗೊಳಿಸುವುದು.

3) **110 ಕೆ.ವಿ. ಮಾರ್ಗ ಹಾದುಹೋಗುವ ಹಳ್ಳಿಗಳು ಮತ್ತು ಪ್ರದೇಶಗಳು:** ಸೇಡಂ, ಹೊಸಳ್ಳಿ, ಹಂಗೆನಹಳ್ಳಿ ಹಾಗೂ ಮಳಖೇಡ.

4) **ಅಂದಾಜು ವೆಚ್ಚ:** ವಿದ್ಯುತ್ ಮಾರ್ಗ ನಿರ್ಮಾಣಕ್ಕೆ ತಗಲುವ ವೆಚ್ಚ ರೂ.525.92 ಲಕ್ಷಗಳು.

5) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮೇಲೆ ತಿಳಿಸಿರುವ ಯೋಜನೆಗಳನ್ನು ಕಾರ್ಯಗತಗೊಳಿಸಲು 885ರ ಭಾರತೀಯ ಟೆಲಿಗ್ರಾಫ್ ಅಧಿನಿಯಮ ಭಾಗ (III)ರ (ಕೇಂದ್ರಿಯ ಕಾಯಿದೆ 1885ರ 13) ಅನ್ವಯ ಟೆಲಿಗ್ರಾಫ್ ಪ್ರಾಧಿಕಾರಿಗಳು ಹೊಂದಿರುವ ಎಲ್ಲಾ ಅಧಿಕಾರಗಳನ್ನು ಹೊಂದಿರುತ್ತದೆ. ಸದರಿ ಯೋಜನೆಗಳಿಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ನಿಗಮದ ಗಮನಕ್ಕೆ ಆಕ್ಷೇಪಣೆಗಳನ್ನು ಈ ಪ್ರಕಟಣೆ ಪ್ರಕಟವಾದ 15 ದಿನಗಳ ಒಳಗೆ ಈ ಕೆಳ ಸಹಿದಾರರ ಕಛೇರಿಗೆ ಕಳುಹಿಸಬಹುದು.

ಕಾರ್ಯನಿರ್ವಾಹಕ ಅಭಿಯಂತರರು (ವಿ)
ಪಿ.ಡಿ.27 ಬ್ಯ.ಕಾ.ವಿಭಾಗ, ಕ.ವಿ.ಪ್ರ.ನಿ.ನಿ. ಗುಲಬರ್ಗಾ.

ಭೂ ದಾಖಲೆಗಳ ಜಂಟಿ ನಿರ್ದೇಶಕರು, ಮರುಭೂಮಾಪನ, ಬೆಳಗಾವಿ

ಅಧಿಸೂಚನೆ

ಸಂಖ್ಯೆ: ಮರುಭೂಮಾಪನ:ನೊ–1/08–09, ದಿನಾಂಕ:24ನೇ ಮಾರ್ಚ್, 2009

ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 106 ಹಾಗೂ ಘನ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಕಂ.ಇ/29/ಭೂದಾಸ/2009, ದಿನಾಂಕ:20.02.2009ರ ಮೇರೆಗೆ 109, 112 ಹಾಗೂ 152ರಲ್ಲಿ ನಿಹಿತವಾದ ಅಧಿಕಾರದ ಮೇರೆಗೆ ಭೂದಾಖಲೆಗಳ ಜಂಟಿ ನಿರ್ದೇಶಕರು, ಮರು ಭೂಮಾಪನ, ಬೆಳಗಾವಿ ಆದ ನಾನು ಬೆಳಗಾವಿ ಜಿಲ್ಲೆಯಲ್ಲಿ ಬೆಳಗಾವಿ/ ಖಾನಾಪುರ/ ಹುಕ್ಕೇರಿ ತಾಲ್ಲೂಕುಗಳಲ್ಲಿ ಈ ಕೆಳಕಂಡ ಗ್ರಾಮಗಳಲ್ಲಿ ಮರುಭೂಮಾಪನ ಹಾಗೂ ಮರುಭೂವರ್ಗೀಕರಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆ.

ಮೇಲ್ಕಂಡ ಯೋಜನೆಯಲ್ಲಿ ಬರತಕ್ಕ ಗ್ರಾಮಗಳ ಎಲ್ಲ ಹಿಡುವಳಿದಾರರು/ ಮಾಲೀಕರು ಅಳತೆಗೆ ಬರತಕ್ಕ ಯೋಜಣಿದಾರರಿಗೆ ಅಗತ್ಯ ಸಹಾಯ (ಕೂಲಿಗಳನ್ನು ಒದಗಿಸುವುದು ಇತ್ಯಾದಿ) ವನ್ನು ಪೂರೈಸತಕ್ಕದ್ದು.

ಭೂದಾಖಲೆಗಳ ಜಂಟಿ ನಿರ್ದೇಶಕರು,
ಮರುಭೂಮಾಪನ, ಬೆಳಗಾವಿ.

ಅ.ನಂ.	ತಾಲ್ಲೂಕು	ಗ್ರಾಮದ ಹೆಸರು
1.	ಬೆಳಗಾವಿ	1) ಕೋಳಿಕೊಪ್ಪ 2) ಕೊಂಡಸಕೊಪ್ಪ 3) ಶಗನಮಟ್ಟಿ 4) ಕಮಕಾರಟ್ಟಿ 5) ಹುಲಿಕಟ್ಟಿ
2.	ಹುಕ್ಕೇರಿ	1) ಜಾಬಾಪುರ 2) ಕೋಚರಿ 3) ಗೌಡವಾಡ 4) ಮಸರಗುಪ್ಪಿ 5) ಅರ್ಜುನವಾಡ
3.	ಖಾನಾಪುರ	1) ಹಲಕರ್ಣಿ 2) ಹತ್ತರಗುಂಜಿ 3) ಮುಡೇವಾಡಿ 4) ಡುಕ್ಕರವಾಡಿ 5) ಬರಗಾಂವ

ಷರಾ: ಭೂಮಾಪನ ತಂಡವು ಆಯಾ ಗ್ರಾಮಗಳಲ್ಲಿ ಬರತಕ್ಕ ಸರ್ಕಾರಿ ನಂಬರುಗಳನ್ನು ಅಳತೆ ಮಾಡಿ ಸುತ್ತೋಲೆಯಂತೆ ದಾಖಲೆಗಳನ್ನು ತಯಾರಿಸುವುದು.

ಭೂದಾಖಲೆಗಳ ಜಂಟಿ ನಿರ್ದೇಶಕರು,
ಮರುಭೂಮಾಪನ, ಬೆಳಗಾವಿ.

ಭೂ ದಾಖಲೆಗಳ ಜಂಟಿ ನಿರ್ದೇಶಕರು, ಮರುಭೂಮಾಪನ, ಬೆಳಗಾವಿ

ಅಧಿಸೂಚನೆ

ಸಂಖ್ಯೆ: ಮರುಭೂಮಾಪನ:ನೊ–1/08–09, ದಿನಾಂಕ:30ನೇ ಏಪ್ರಿಲ್, 2009

ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 106 ಹಾಗೂ ಘನ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಕಂ.ಇ/29/ಭೂದಾಸ/2009, ದಿನಾಂಕ:20.02.2009ರ ಮೇರೆಗೆ 109, 112 ಹಾಗೂ 152ರಲ್ಲಿ ನಿಹಿತವಾದ ಅಧಿಕಾರದ

ಮೇರೆಗೆ ಭೂದಾಖಲೆಗಳ ಜಂಟಿ ನಿರ್ದೇಶಕರು, ಮರು ಭೂಮಾಪನ, ಬೆಳಗಾವಿ ಆದ ನಾನು ಬೆಳಗಾವಿ ಜಿಲ್ಲೆಯ ಬೆಳಗಾವಿ/ ಖಾನಾಪುರ/ ಹುಕ್ಕೇರಿ ತಾಲ್ಲೂಕುಗಳಲ್ಲಿ ಈ ಕೆಳಕಂಡ ಗ್ರಾಮಗಳಲ್ಲಿ ಮರುಭೂಮಾಪನ ಹಾಗು ಮರುಭೂವರ್ಗೀಕರಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆ.

ಮೇಲ್ಕಂಡ ಯೋಜನೆಯಲ್ಲಿ ಬರತಕ್ಕ ಗ್ರಾಮಗಳ ಎಲ್ಲ ಹಿಡುವಳಿದಾರರು/ ಮಾಲೀಕರು ಅಳತೆಗೆ ಬರತ ಮೋಜಣಿದಾರರಿಗೆ ಅಗತ್ಯ ಸಹಾಯ (ಕೂಲಿಗಳನ್ನು ಒದಗಿಸುವುದು ಇತ್ಯಾದಿ) ವನ್ನು ಪೂರೈಸತಕ್ಕದ್ದು.

ಭೂದಾಖಲೆಗಳ ಜಂಟಿ ನಿರ್ದೇಶಕರು,
ಮರುಭೂಮಾಪನ, ಬೆಳಗಾವಿ.

ಅ.ನಂ.	ತಾಲ್ಲೂಕು	ಗ್ರಾಮದ ಹೆಸರು
1.	ಬೆಳಗಾವಿ	1) ತಾರಿಹಾಳ 2) ಸಿದ್ದನಭಾವಿ 3) ಬಸ್ತವಾಡ 4) ಧಾಮಣೆ 5) ಕಣವಿಕರವಿನಕೊಪ್ಪ 6) ಬಾಗೇವಾಡಿ 7) ಬಸ್ಸಾಪೂರ 8) ಶಿಂಧೊಳ್ಳಿ 9) ಮಾಸ್ತಮರಡಿ 10) ಹಲಗಾ
2.	ಹುಕ್ಕೇರಿ	1) ಹೆಬ್ಬಾಳ 2) ಕಮತನೂರ 3) ಮದಿಹಳ್ಳಿ 4) ಗಾಂವನಾಳ 5) ಬೆಣಿವಾಡ 6) ಬಸ್ತವಾಡ 7) ರಕ್ಷಿ 8) ಗೋಟೂರ 9) ನೇರಲಿ 10) ಮದಮಕ್ಕನಾಳ
3.	ಖಾನಾಪುರ	1) ಹರಸನವಾಡಿ 2) ರಾಮಗುರವಾಡಿ 3) ಮಾನಸಾಪುರ 4) ಖೆಮೆಮಾಡಿ 5) ದೊಡ್ಡಹೋಸೂರ 6) ಕುಪಟಗೇರಿ 7) ಹಲಸಗಾ 8) ಬಂಥರಗಾಳಿ 9) ಅಂಕಲೆ

ಷರಾ: ಭೂಮಾಪನ ತಂಡವು ಆಯಾ ಗ್ರಾಮಗಳಲ್ಲಿ ಬರತಕ್ಕ ಸರ್ಕಾರಿ ನಂಬರುಗಳನ್ನು ಅಳತೆ ಮಾಡಿ ಸುತ್ತೋಲೆಯ ದಾಖಲೆಗಳನ್ನು ತಯಾರಿಸುವುದು.

ಭೂದಾಖಲೆಗಳ ಜಂಟಿ ನಿರ್ದೇಶಕರು,
ಮರುಭೂಮಾಪನ, ಬೆಳಗಾವಿ.

ಪಿ.ಆರ್.432

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ದಾವಣಗೆರೆ ಜಿಲ್ಲೆ, ದಾವಣಗೆರೆ ಇವರ ಕಾರ್ಯಾಲಯ

ವಿಷಯ: ಸ್ಥಗಿತಗೊಂಡಿರುವ ಸನ್‌ಕರ್ ವಿವಿಧೋದ್ದೇಶ ಸಹಕಾರ ಸಂಘ ನಿ., ಕೆ.ಬಿ. ಬಡಾವಣೆ, ದಾವಣಗೆರೆ-2 ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರ ಪ್ರಸ್ತಾವನೆ ಸಂಖ್ಯೆ: ಸಸಿ31/ಸ್ಥಗಿತ/ಸನ್‌ಕರ್ ವಿವಿಸಸಂ/08-09 ಸಿಆರ್44. ದಿನಾಂಕ:10.12.2008.

2) ಜನತಾ ವಾಣಿ ಪತ್ರಿಕಾ ಪ್ರಕಟಣೆ ದಿನಾಂಕ:01.08.2008.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಮೇಲ್ಕಂಡ ಸಂಘದ ಕಾರ್ಯಚಟುವಟಿಕೆಗಳು ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಮಂಡಳಿ ಸಂಘದ ಅಭಿವೃದ್ಧಿ ಬಗ್ಗೆ ಶ್ರಮಿಸುವಲ್ಲಿ ವಿಫಲವಾಗಿರುತ್ತದೆ. ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲ. ಈ ಬಗ್ಗೆ ಉಲ್ಲೇಖ (2)ರ ಪತ್ರಿಕಾ ಪ್ರಕಟಣೆ ನೀಡಿದ್ದು ಸಂಘವು ಅಸ್ತಿತ್ವದಲ್ಲಿರದ ಬಗ್ಗೆ ಮಹಜರು ಮಾಡಿಸಿ, ಕಾರಣ ಸಂಬಂಧಿಸಿದ ನಿರ್ದೇಶಕರಿಗೆ ನೋಟೀಸ್ ಜಾರಿ ಮಾಡಿಸಲು ಸಾಧ್ಯವಾಗಿರುವುದಿಲ್ಲವೆಂದು, ಉಲ್ಲೇಖ (1)ರ ಪತ್ರ ದಿನಾಂಕ:10.12.2008ರಲ್ಲಿ ವರದಿ ಸಲ್ಲಿಸಿರುತ್ತಾರೆ. ಪತ್ರಿಕಾ ಪ್ರಕಟಣೆಗೆ ಯಾರಿಂದಲೂ ಪ್ರತಿಕ್ರಿಯೆ ಬಂದಿರುವುದಿಲ್ಲ. ಈ ಸಂಘದಿಂದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ. ಸಂಘವನ್ನು ಇದೇ ರೀತಿ ಮುಂದುವರೆಯಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅದೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಕಂಡು ಬಂದಿರುವುದರಿಂದ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಸಂಖ್ಯೆ: ಡಿಆರ್/ಡಿವಿಜಿ/ಸಮಾಪನೆ/ಸಿಆರ್-27/2008-09, ದಿನಾಂಕ:16ನೇ ಡಿಸೆಂಬರ್, 2008

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಮತ್ತು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಎಂಡಬ್ಲ್ಯೂ:69:ಸಿಎಲ್ಎಂ:2001 ದಿನಾಂಕ:21.11.2001ರ ಪ್ರಕಾರ ದತ್ತವಾದ ಅಧಿಕಾರದನ್ವಯ ದಾವಣಗೆರೆ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ಬಿ. ಕುಬೇರಪ್ಪ, ಕೆ.ಸಿ.ಎಸ್. ಆದ ನಾನು ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸನ್‌ಕೇರ್ ವಿವಿಧೋದ್ದೇಶ ಸಹಕಾರ ಸಂಘ ನಿ., ದಾವಣಗೆರೆ, ಇದನ್ನು ಸಮಾಪನೆಗೊಳಿಸಿ, 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1)ರನ್ವಯ ಸಹಕಾರ ಸಂಘಗಳ ನಿರೀಕ್ಷಕರು, ವೃತ್ತ-2, ಸಹಾಯಕ ನಿಬಂಧಕರ ಕಛೇರಿ, ದಾವಣಗೆರೆ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಆಕಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ, ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನ ದಿನಾಂಕ:16.12.2008ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪನಿಬಂಧಕರು,
ದಾವಣಗೆರೆ ಜಿಲ್ಲೆ, ದಾವಣಗೆರೆ.

ಸಿ.ಆರ್.57

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ದಾವಣಗೆರೆ ಜಿಲ್ಲೆ, ದಾವಣಗೆರೆ ಇವರ ಕಾರ್ಯಾಲಯ

ವಿಷಯ: ಸ್ಥಗಿತಗೊಂಡಿರುವ ಹಾಲು ಉತ್ಪಾದಕರ ಸಹಕಾರ ಸಂಘ ನಿ., ಕುರಡಿ, ಕಿತ್ತೂರು-ಅಂಚೆ, ದಾವಣಗೆರೆ-ತಾ: ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರ ಪ್ರಸ್ತಾವನೆ ಸಂಖ್ಯೆ: ಸನಿ31/ಸ್ಥಗಿತ/ಎಂಪಿಸಿಎಸ್ ಕುರಡಿ/08-09, ಸಿಆರ್.45, ದಿನಾಂಕ:10.12.2008.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಮೇಲ್ಕಂಡ ಸಂಘದ ಕಾರ್ಯಚಟುವಟಿಕೆಗಳು ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಮಂಡಳಿ ಸಂಘದ ಅಭಿವೃದ್ಧಿ ಬಗ್ಗೆ ಶ್ರಮಿಸುವಲ್ಲಿ ವಿಫಲವಾಗಿರುತ್ತದೆ. ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲ. ಸಂಘವು

ಅಸ್ತಿತ್ವದಲ್ಲಿರದ ಬಗ್ಗೆ ಮಹಜರು ಮಾಡಿಸಿ, ಕಾರಣ ಸಂಬಂಧಿಸಿದ ನಿರ್ದೇಶಕರಿಗೆ ನೋಟೀಸ್ ಜಾರಿ ಮಾಡಿಸಲು ಸಾಧ್ಯವಾಗಿರುವುದಿಲ್ಲವೆಂದು, ಉಲ್ಲೇಖ (1)ರ ಪತ್ರ ದಿನಾಂಕ:10.12.2008ರಲ್ಲಿ ವರದಿ ಸಲ್ಲಿಸಿರುತ್ತಾರೆ. ಪತ್ರಿಕಾ ಪ್ರಕಟಣೆಗೆ ಯಾರಿಂದಲೂ ಪ್ರತಿಕ್ರಿಯೆ ಬಂದಿರುವುದಿಲ್ಲ. ಈ ಸಂಘದಿಂದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ. ಸಂಘವನ್ನು ಇದೇ ರೀತಿ ಮುಂದುವರೆಯಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅದೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಕಂಡು ಬಂದಿರುವುದರಿಂದ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಸಂಖ್ಯೆ: ಡಿಆರ್/ಡಿವಿಜಿ/ಸಮಾಪನೆ/ಸಿಆರ್-28/2008-09, ದಿನಾಂಕ:16ನೇ ಡಿಸೆಂಬರ್, 2008

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಮತ್ತು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಎಂಡಬ್ಲ್ಯೂ:69:ಸಿಎಲ್ಎಂ:2001 ದಿನಾಂಕ:21.11.2001ರ ಪ್ರಕಾರ ದತ್ತವಾದ ಅಧಿಕಾರದನ್ವಯ ದಾವಣಗೆರೆ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ಬಿ. ಕುಬೇರಪ್ಪ, ಕೆ.ಸಿ.ಎಸ್. ಆದ ನಾನು ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಹಾಲು ಉತ್ಪಾದಕರ ಸಹಕಾರ ಸಂಘ ನಿ. ಕುರಡಿ, ಕಿತ್ತೂರು-ಅಂಚೆ, ದಾವಣಗೆರೆ-ತಾ, ಇದನ್ನು ಸಮಾಪನೆಗೊಳಿಸಿ, 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1)ರನ್ವಯ ಸಹಕಾರ ಸಂಘಗಳ ನಿರೀಕ್ಷಕರು, ವೃತ್ತ-2, ಸಹಾಯಕ ನಿಬಂಧಕರ ಕಛೇರಿ, ದಾವಣಗೆರೆ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ, ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನ ದಿನಾಂಕ:16.12.2008ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪನಿಬಂಧಕರು,
ದಾವಣಗೆರೆ ಜಿಲ್ಲೆ, ದಾವಣಗೆರೆ.

ಪಿ.ಆರ್.58

ಕೃಷಿ ಮತ್ತು ತೋಟಗಾರಿಕೆ ಇಲಾಖೆ

ತಿದ್ದುಪಡಿ

ಸಂಖ್ಯೆ: ಕೃತೋಇ 146 ಕೃಪವ 2008, ಬೆಂಗಳೂರು, ದಿನಾಂಕ:30ನೇ ಸೆಪ್ಟೆಂಬರ್, 2008

ಸರ್ಕಾರದ ಅಧಿಸೂಚನೆ ಸಂಖ್ಯೆ: ಕೃತೋಇ 91 ಕೃಪಸೇ 2006, ದಿನಾಂಕ:30.08.2008ರ ಅನುಬಂಧ-1ರ ಕಲಂ 6ರಲ್ಲಿ ಸೂಚಿಸಿರುವ ನೇಮಕಾತಿ ಮಾಡಿದ ಸ್ಥಳಗಳನ್ನು ಹಾಗೂ ಇದೇ ಸಂಖ್ಯೆಯ ದಿನಾಂಕ:15.09.2008ರ ಅಧಿಸೂಚನೆಯ ಕಲಂ 5ರಲ್ಲಿನ ಸ್ಥಳಗಳನ್ನು ಈ ಕೆಳಕಂಡ ಅಭ್ಯರ್ಥಿಗಳಿಗೆ ಸಂಬಂಧಪಟ್ಟಂತೆ ಅವರುಗಳ ಹೆಸರಿನ ಮುಂದೆ ಕಲಂ -5ರಲ್ಲಿ ತಿಳಿಸಿರುವಂತೆ ತಿದ್ದಿ ಓದಿಕೊಳ್ಳುವುದು.

ಕ್ರ. ಸಂ.	ಆಯ್ಕೆಪಟ್ಟಿ ಕ್ರ.ಸಂ.	ಅಭ್ಯರ್ಥಿಗಳ ಹೆಸರು ಮತ್ತು ವಿಳಾಸ	ದಿ:30.08.2008 & 15.09.2008ರ ಅಧಿಸೂಚನೆಯಲ್ಲಿ ಸೂಚಿಸಿರುವ ಸ್ಥಳ	ತಿದ್ದಿ ಓದಿಕೊಳ್ಳಬೇಕಾಗಿರುವ ಸ್ಥಳ
1.	227	Shilpa G.K. D/o Kalegowda. G.M. Goravale, Dudda Hobli, Mandya Tq: Dist-571405.	RSK, Hanooru, O/o Asst. Director of Agriculture, Kollegal Taluk.	RSK, Jayapura O/o Asst. Director of Agriculture, Mysore Taluk.
2.	311	Habeeba Tabassum Rahamniyavila, 4th Cross, Siddaganga Extension, Tumkur-572102	RSK I.D.Halli, O/o Asst. Director of Agriculture, Madhugiri Taluk	RSK, Hebbur, O/o Asst. Director of Agriculture, Tumkur Taluk.
3.	356	Pushpa R.N. No.179, 9th C Main Road, Vijayanagar, Bangalore-40	RSK, Keragodu, O/o Asst. Director of Agriculture, Mandya Taluk.	RSK, Kasaba, O/o Asst. Director of Agriculture, Ramanagar Taluk. (ಶ್ರೀ ಹೆಚ್. ಹುಚ್ಚೀರಯ್ಯನವರ ಮುಂಬಡ್ತಿಯಿಂದ ತೆರವಾದ ಜಾಗಕ್ಕೆ)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಜಿ.ಕೆ. ಗುರಾಣಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಮತ್ತು ತೋಟಗಾರಿಕೆ ಇಲಾಖೆ.

ಪಿ.ಆರ್.59

ಕರ್ನಾಟಕ ಲೋಕಸೇವಾ ಆಯೋಗದ ನಡವಳಿಗಳು, ಬೆಂಗಳೂರು

ವಿಷಯ: ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ:22.06.2008ರಂದು ನಡೆಸಿದ ಕಿರಿಯ ಸಹಾಯಕ/ ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯ ಅಭ್ಯರ್ಥಿಗಳಾದ ಶ್ರೀ ಆನಂದ್ ಕುಮಾರ್, ಶ್ರೀ ಇಸಾಕ್ ಅಹಮದ್ ಕಂದಗಲ್ ಮತ್ತು ಶ್ರೀ ಆನಂದ ಬಾಸುತ್ಕರ್‌ರವರ ವಿರುದ್ಧದ ದುರಾಚಾರ ಪ್ರಕರಣಗಳ ಬಗ್ಗೆ.

ಓದಲಾಗಿದೆ:

1) ಶ್ರೀಮತಿ ಪಿ.ಕೆ. ಕುಲಕರ್ಣಿ, ಉಪಪ್ರಾಚಾರ್ಯರು, ಪಿ.ಡಿ.ಜೆ. ಪದವಿ ಪೂರ್ವ ಮಹಾವಿದ್ಯಾಲಯ, ವಿಜಾಪುರ, ರವರ ವರದಿ ದಿನಾಂಕ:22.06.2008.
2) ಪ್ರಾಂಶುಪಾಲರು, ಆಲ್‌ಶರೆ ವಿಜ್ಞಾನ ಪದವಿ ಪೂರ್ವ ಕಾಲೇಜು, ಗುಲ್ಬರ್ಗಾ ರವರ ವರದಿ ದಿನಾಂಕ:22.06.2008.
3) ಈ ಕಛೇರಿಯ ಕಾರಣ ಕೇಳುವ ನೋಟೀಸ್ ಸಂಖ್ಯೆ: ಇ(3)2087/08-09, ದಿನಾಂಕ:07.07.2008.
4) ಈ ಕಛೇರಿಯ ಕಾರಣ ಕೇಳುವ ನೋಟೀಸ್ ಸಂಖ್ಯೆ: ಇ(3)2137/08-09, ದಿನಾಂಕ:19.08.2008.
5) ಈ ಕಛೇರಿಯ ಕಾರಣ ಕೇಳುವ ನೋಟೀಸ್ ಸಂಖ್ಯೆ: ಇ(3)2165/08-09, ದಿನಾಂಕ:22.08.2008.
6) ಶ್ರೀ ಆನಂದ್ ಕುಮಾರ್‌ರವರ ಸಮಜಾಯಿಷಿ ದಿನಾಂಕ:24.07.2008.
7) ಶ್ರೀ ಇಸಾಕ್ ಅಹಮದ್ ಕಂದಗಲ್‌ರವರ ಸಮಜಾಯಿಷಿ ದಿನಾಂಕ:22.08.2008.
8) ಶ್ರೀ ಆನಂದ್ ಬಾಸುತ್ಕರ್‌ರವರ ಸಮಜಾಯಿಷಿ ದಿನಾಂಕ:20.09.2008.

ಪ್ರಸ್ತಾವನೆ:

ದಿನಾಂಕ:22.06.2008ರಂದು ನಡೆದ ಕಿರಿಯ ಸಹಾಯಕ/ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆ ಸಮಯದಲ್ಲಿ 03 ದುರಾಚಾರ ಪ್ರಕರಣಗಳು ವರದಿಯಾಗಿದ್ದು, ಅವುಗಳ ವಿವರ ಹೀಗಿದೆ:

1) ಪಿ.ಡಿ.ಜೆ. ಮಹಾವಿದ್ಯಾಲಯ, ವಿಜಾಪುರದ ಉಪ ಪ್ರಾಚಾರ್ಯರು ಓದಲಾದ 1ರ ವರದಿಯಲ್ಲಿ ರಿ.ನಂ.539356ರಲ್ಲಿ ಪರೀಕ್ಷೆ ಬರೆದಿದ್ದ ಶ್ರೀ ಆನಂದ್ ಬಾಸುತ್ಕರ್ ಎಂಬ ಅಭ್ಯರ್ಥಿ ಸಾಮಾನ್ಯ ಕನ್ನಡ ಪರೀಕ್ಷೆ ಮುಗಿದ ನಂತರ ಓ.ಎಂ.ಆರ್. ಉತ್ತರ ಹಾಳೆಯನ್ನು ಕೊಠಡಿ ಪರಿವೀಕ್ಷಕರಿಗೆ ಹಿಂತಿರುಗಿಸದೆ ತೆಗೆದುಕೊಂಡು ಹೋಗಿದ್ದು, ಈ ವಿಷಯ ತಿಳಿದು ಬಂದ ಕೂಡಲೇ ಪರೀಕ್ಷಾ ಕೇಂದ್ರದ ಮೇಲ್ವಿಚಾರಕರು ಆಯೋಗದ ಕಛೇರಿಯನ್ನು ಸಂಪರ್ಕಿಸಿ ಅಭ್ಯರ್ಥಿಯ ವಿಳಾಸ ಹಾಗೂ ದೂರವಾಣಿ ಸಂಖ್ಯೆಯನ್ನು ಪಡೆದು ಅದರ ಮೂಲಕ ಅಭ್ಯರ್ಥಿಯನ್ನು ಸಂಪರ್ಕಿಸಿ ಈ ಬಗ್ಗೆ ಅಭ್ಯರ್ಥಿಯಿಂದ ಲಿಖಿತ ಹೇಳಿಕೆ ಪಡೆದು ಓ.ಎಂ.ಆರ್. ಉತ್ತರ ಹಾಳೆಯನ್ನು ಅಭ್ಯರ್ಥಿಯಿಂದ ಪಡೆದಿರುವುದಾಗಿ ತಿಳಿಸಿದ್ದರು.

2) ಗುಲ್ಬರ್ಗಾದ ಆಲ್‌ಶರೆ ವಿಜ್ಞಾನ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಓದಲಾದ 2ರ ವರದಿಯಲ್ಲಿ ರಿ.ನಂ.691927ರ ಅಭ್ಯರ್ಥಿ ಶ್ರೀ ಆನಂದ್ ಕುಮಾರ್‌ರವರು ಪ್ರಶ್ನೆ ಪತ್ರಿಕೆಯನ್ನು ಪರೀಕ್ಷಾ ಕೊಠಡಿಯಿಂದ ಹೊರಹಾಕಿದ್ದ ಕಾರಣ ಅವರನ್ನು ಪೊಲೀಸ್ ವಶಕ್ಕೆ ಕೊಟ್ಟು ಪರೀಕ್ಷೆಗೆ ಅವಕಾಶ ನೀಡಿರುವುದಿಲ್ಲ ಎಂದು ತಿಳಿಸಿ ಇವರಿಂದ ವಶಪಡಿಸಿಕೊಂಡಿದ್ದ ಪ್ರವೇಶ ಪತ್ರ, ಉತ್ತರ ಹಾಳೆ ಹಾಗೂ ಪ್ರಶ್ನೆ ಪತ್ರಿಕೆಯನ್ನು ಕಳುಹಿಸಿದ್ದರು.

3) ಬೆಂಗಳೂರಿನ ಜೆ.ಎಸ್.ಎಸ್. ಕಂಪೋಸಿಟ್ ಪಿ.ಯು. ಕಾಲೇಜು ಪರೀಕ್ಷಾ ಕೇಂದ್ರದಲ್ಲಿ ರಿ.ನಂ.409382ರಲ್ಲಿ ಪರೀಕ್ಷೆ ಬರೆದಿದ್ದ ಶ್ರೀ ಇಸಾಕ್ ಅಹಮದ್ ಕಂದಗಲ್ ಎಂಬ ಅಭ್ಯರ್ಥಿ ಸಾಮಾನ್ಯ ಕನ್ನಡ ಪರೀಕ್ಷೆ ಸಮಯದಲ್ಲಿ ಓ.ಎಂ.ಆರ್. ಹಾಳೆಯನ್ನು ಭರ್ತಿ ಮಾಡದೆ ಖಾಲಿಯಾಗಿ ಸಲ್ಲಿಸಿ ಅದರಲ್ಲಿ ದೂರವಾಣಿ ಸಂಖ್ಯೆ:9900346433 ಅನ್ನು ನಮೂದಿಸಿ ಈ ನಂಬರಿಗೆ ಸಂಪರ್ಕಿಸಿರಿ 2 ಲಕ್ಷ ಪಡೆಯಿರಿ ಎಂದು ಬರೆದಿರುವುದು ಕಂಡುಬಂದಿದೆ.

ಈ ಮೂರು ಪ್ರಕರಣಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳಿಗೆ ಓದಲಾದ 3 ರಿಂದ 5ರ ಕಾರಣಕೇಳುವ ನೋಟೀಸುಗಳನ್ನು ಜಾರಿ ಮಾಡಿ ಅವರುಗಳಿಂದ ಲಿಖಿತ ಮೂಲಕ ಸಮಜಾಯಿಷಿ ಸಲ್ಲಿಸಲು ಸೂಚಿಸಲಾಗಿತ್ತು. ಅವಕ್ಕೆ ಉತ್ತರವಾಗಿ ಅಭ್ಯರ್ಥಿಗಳು ಸಲ್ಲಿಸಿರುವ ಓದಲಾದ 6 ರಿಂದ 8ರ ಸಮಜಾಯಿಷಿಯಲ್ಲಿ ತಮ್ಮ ತಪ್ಪುಗಳನ್ನು ಒಪ್ಪಿಕೊಂಡು ಕ್ಷಮೆ ಕೋರಿದ್ದಾರೆ.

ಈ ಎಲ್ಲಾ ಅಂಶಗಳನ್ನು ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ಪರಿಗಣಿಸಿ ಆಯೋಗವು ಈ ಮೂರು ಅಭ್ಯರ್ಥಿಗಳ ವಿರುದ್ಧ ಸೂಕ್ತ ದಂಡನೆಯನ್ನು ವಿಧಿಸುವ ಬಗ್ಗೆ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

ಆದೇಶ ಸಂಖ್ಯೆ: ಇ(3) 2274/ 2008-09/ ಪಿಎಸ್‌ಸಿ, ದಿನಾಂಕ:7ನೇ ಜನವರಿ, 2009

ಕರ್ನಾಟಕ ನಾಗರೀಕ ಸೇವೆ (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು 1978 ಹಾಗೂ ಅದಕ್ಕೆ ಸಂಬಂಧಿಸಿದಂತೆ ಆಯೋಗದ ಅಧಿಕೃತ ಜ್ಞಾಪನ ಸಂಖ್ಯೆ: ಆಡಳಿತ 398/93-94/ ಪಿಎಸ್‌ಸಿ, ದಿನಾಂಕ:14.07.1993ರಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ ಅಪಾಧಿತ ಅಭ್ಯರ್ಥಿಗಳಾದ ಶ್ರೀ ಆನಂದ್‌ಕುಮಾರ್ (ರಿ.ನಂ.691927) ಶ್ರೀ ಇಸಾಕ್ ಅಹಮದ್ ಕಂದಗಲ್ (ರಿ.ನಂ.409382) ಮತ್ತು ಶ್ರೀ ಆನಂದ ಬಾಸುತ್ಕರ್ (ರಿ.ನಂ.539356) ರವರುಗಳಿಗೆ ದಿನಾಂಕ:22.06.2008ರಂದು

ಆಯೋಗವು ನಡೆಸಿದ ಕಿರಿಯ ಸಹಾಯಕ/ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯಿಂದ ಡಿಬಾರ್ ಮಾಡುವ ದಂಡನೆಯನ್ನು ಈ ಮೂಲಕ ವಿಧಿಸಿದೆ.

ಆಯೋಗದ ಆದೇಶದ ಮೇರೆಗೆ
ವಿ.ಬಿ. ಪಾಟೀಲ್
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

ಪಿ.ಆರ್.64

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ದಾವಣಗೆರೆ ಜಿಲ್ಲೆ, ದಾವಣಗೆರೆ ಇವರ ಕಛೇರಿ

ನಂ.ಡಿಆರ್/ಡಿವಿಜಿ/ಎಲ್‌ಕ್ಯೂಡಿ/ಸಿಆರ್-06/2008-09, ದಿನಾಂಕ:11ನೇ ಡಿಸೆಂಬರ್, 2008

ವಿಷಯ: ಸ್ಥಗಿತಗೊಂಡಿರುವ ಸಾಲೇಶ್ವರ ಪತ್ತಿನ ಸಹಕಾರ ಸಂಘ ನಿ., ದಾವಣಗೆರೆ, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರ ಪ್ರಸ್ತಾವನೆ ದಿನಾಂಕ:25.11.2008.
2) ಈ ಕಛೇರಿಯ ಕಾರಣ ಕೇಳಿ ನೋಟೀಸ್ ಸಮಸಂಖ್ಯೆ ಪತ್ರ ದಿನಾಂಕ:26.09.2008.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಮೇಲ್ಕಂಡ ಸಂಘದ ಕಾರ್ಯಚಟುವಟಿಕೆಗಳು ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಮಂಡಳಿ ಸಂಘದ ಅಭಿವೃದ್ಧಿ ಬಗ್ಗೆ ಗಮನಿಸುವಲ್ಲಿ ವಿಫಲವಾಗಿರುತ್ತದೆ. ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲ. ಈ ಬಗ್ಗೆ ಉಲ್ಲೇಖ (2)ರ ಪತ್ರಿಕಾ ಪ್ರಕಟಣೆ ನೀಡಿದ್ದು ಸಂಘವು ಅಸ್ತಿತ್ವದಲ್ಲಿರದ ಬಗ್ಗೆ ಮಹಜರು ಮಾಡಿಸಿ, ಕಾರಣ ಸಂಬಂಧಿಸಿದ ನಿರ್ದೇಶಕರಿಗೆ ನೋಟೀಸ್ ಜಾರಿ ಮಾಡಿಸಲು ಸಾಧ್ಯವಾಗಿರುವುದಿಲ್ಲವೆಂದು, ಉಲ್ಲೇಖ (1)ರ ಪತ್ರ ದಿನಾಂಕ:25.11.2008ರಲ್ಲಿ ವರದಿ ಸಲ್ಲಿಸಿರುತ್ತಾರೆ. ಇದಕ್ಕೆ ಯಾರಿಂದಲೂ ಪ್ರತಿಕ್ರಿಯೆ ಬಂದಿರುವುದಿಲ್ಲ. ಈ ಸಂಘದಿಂದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ. ಸಂಘವನ್ನು ಇದೇ ರೀತಿ ಮುಂದುವರೆಯಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಕಂಡುಬಂದಿರುವುದರಿಂದ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಮತ್ತು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಎಂಡಬ್ಲ್ಯೂ:69:ಸಿಎಲ್‌ಎಂ:2001 ದಿನಾಂಕ:21.11.2001ರ ಪ್ರಕಾರ ದತ್ತವಾದ ಅಧಿಕಾರದನ್ವಯ ದಾವಣಗೆರೆ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ಬಿ. ಕುಬೇರಪ್ಪ, ಕೆ.ಸಿ.ಎಸ್. ಆದ ನಾನು ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸಾಲೇಶ್ವರ ಪತ್ತಿನ ಸಹಕಾರ ಸಂಘ ನಿ. ಬೆಳ್ಳೂಳ್ಳಿಗಲ್ಲಿ, ದಾವಣಗೆರೆ, , ದಾವಣಗೆರೆ ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1)ರನ್ವಯ ಸಹಕಾರ ಸಂಘಗಳ ನಿರೀಕ್ಷಕರು, 1ನೇ ವೃತ್ತ, ದಾವಣಗೆರೆ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ, ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನ ದಿನಾಂಕ:11.12.2008ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪನಿಬಂಧಕರು,
ದಾವಣಗೆರೆ ಜಿಲ್ಲೆ, ದಾವಣಗೆರೆ.

ಪಿ.ಆರ್.2

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ದಾವಣಗೆರೆ ಜಿಲ್ಲೆ, ದಾವಣಗೆರೆ ಇವರ ಕಛೇರಿ

ನಂ.ಡಿಆರ್/ಡಿವಿಜಿ/ಎಲ್‌ಕ್ಯೂಡಿ/ಸಿಆರ್-07/2008-09, ದಿನಾಂಕ:11ನೇ ಡಿಸೆಂಬರ್, 2008

ವಿಷಯ: ಸ್ಥಗಿತಗೊಂಡಿರುವ ರಾಹತ್ ಪತ್ತಿನ ಸಹಕಾರ ಸಂಘ ನಿ., ದಾವಣಗೆರೆ, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರ ಪ್ರಸ್ತಾವನೆ ದಿನಾಂಕ:10.11.2008.
2) ಈ ಕಛೇರಿಯ ಕಾರಣ ಕೇಳಿ ನೋಟೀಸ್ ಸಮಸಂಖ್ಯೆ ಪತ್ರ ದಿನಾಂಕ:26.09.2008.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಮೇಲ್ಕಂಡ ಸಂಘದ ಕಾರ್ಯಚಟುವಟಿಕೆಗಳು ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಮಂಡಳಿ ಸಂಘದ ಅಭಿವೃದ್ಧಿ ಬಗ್ಗೆ ಗಮನಿಸುವಲ್ಲಿ ವಿಫಲವಾಗಿರುತ್ತದೆ. ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲ. ಈ ಬಗ್ಗೆ ಉಲ್ಲೇಖ (2)ರ ಪತ್ರಿಕಾ ಪ್ರಕಟಣೆ ನೀಡಿದ್ದು ಸಂಘವು ಅಸ್ತಿತ್ವದಲ್ಲಿರದ ಬಗ್ಗೆ ಮಹಜರು ಮಾಡಿಸಿ, ಕಾರಣ ಸಂಬಂಧಿಸಿದ ನಿರ್ದೇಶಕರಿಗೆ ನೋಟೀಸ್ ಜಾರಿ ಮಾಡಿಸಲು ಸಾಧ್ಯವಾಗಿರುವುದಿಲ್ಲವೆಂದು, ಉಲ್ಲೇಖ (1)ರ ಪತ್ರ ದಿನಾಂಕ:10.11.2008ರಲ್ಲಿ ವರದಿ ಸಲ್ಲಿಸಿರುತ್ತಾರೆ. ಇದಕ್ಕೆ ಯಾರಿಂದಲೂ ಪ್ರತಿಕ್ರಿಯೆ ಬಂದಿರುವುದಿಲ್ಲ. ಈ ಸಂಘದಿಂದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ. ಸಂಘವನ್ನು ಇದೇ ರೀತಿ ಮುಂದುವರೆಯಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಕಂಡುಬಂದಿರುವುದರಿಂದ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಮತ್ತು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಎಂಡಬ್ಲ್ಯೂ:69:ಸಿಎಲ್ಎಂ:2001 ದಿನಾಂಕ:21.11.2001ರ ಪ್ರಕಾರ ದತ್ತವಾದ ಅಧಿಕಾರದನ್ವಯ ದಾವಣಗೆರೆ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ಬಿ. ಕುಬೇರಪ್ಪ, ಕೆ.ಸಿ.ಎಸ್. ಆದ ನಾನು ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ರಾಹತ್ ಪತ್ತಿನ ಸಹಕಾರ ಸಂಘ ನಿ. ವಿನೋಬನಗರ, ದಾವಣಗೆರೆ, ದಾವಣಗೆರೆ ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1)ರನ್ವಯ ಸಹಕಾರ ಸಂಘಗಳ ನಿರೀಕ್ಷಕರು, 1ನೇ ವೃತ್ತ, ದಾವಣಗೆರೆ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ, ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನ ದಿನಾಂಕ:11.12.2008ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪನಿಬಂಧಕರು,
ಪಿ.ಆರ್.3 ದಾವಣಗೆರೆ ಜಿಲ್ಲೆ, ದಾವಣಗೆರೆ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ದಾವಣಗೆರೆ ಜಿಲ್ಲೆ, ದಾವಣಗೆರೆ ಇವರ ಕಛೇರಿ

ನಂ.ಡಿಆರ್/ಡಿವಿಜಿ/ಎಲ್‌ಕ್ಯೂಡಿ/ಸಿಆರ್-08/2008-09, ದಿನಾಂಕ:11ನೇ ಡಿಸೆಂಬರ್, 2008

ವಿಷಯ: ಸ್ಥಗಿತಗೊಂಡಿರುವ ಕರ್ನಾಟಕ ಮಂಡಕ್ಕಿ ಮತ್ತು ಅವಲಕ್ಕಿ ಉತ್ಪಾದಕರ ಕೈಗಾರಿಕಾ ಸಹಕಾರ ಸಂಘ ನಿ., ದಾವಣಗೆರೆ, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರ ಪ್ರಸ್ತಾವನೆ ದಿನಾಂಕ:10.11.2008.
2) ಈ ಕಛೇರಿಯ ಕಾರಣ ಕೇಳಿ ನೋಟೀಸ್ ಸಮಸಂಖ್ಯೆ ಪತ್ರ ದಿನಾಂಕ:26.09.2008.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಮೇಲ್ಕಂಡ ಸಂಘದ ಕಾರ್ಯಚಟುವಟಿಕೆಗಳು ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಮಂಡಳಿ ಸಂಘದ ಅಭಿವೃದ್ಧಿ ಬಗ್ಗೆ ಗಮನಿಸುವಲ್ಲಿ ವಿಫಲವಾಗಿರುತ್ತದೆ. ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲ. ಈ ಬಗ್ಗೆ ಉಲ್ಲೇಖ (2)ರ ಪತ್ರಿಕಾ ಪ್ರಕಟಣೆ ನೀಡಿದ್ದು ಸಂಘವು ಅಸ್ತಿತ್ವದಲ್ಲಿರದ ಬಗ್ಗೆ ಮಹಜರು ಮಾಡಿಸಿ, ಕಾರಣ ಸಂಬಂಧಿಸಿದ ನಿರ್ದೇಶಕರಿಗೆ ನೋಟೀಸ್ ಜಾರಿ ಮಾಡಿಸಲು ಸಾಧ್ಯವಾಗಿರುವುದಿಲ್ಲವೆಂದು, ಉಲ್ಲೇಖ (1)ರ ಪತ್ರ ದಿನಾಂಕ:10.11.2008ರಲ್ಲಿ ವರದಿ ಸಲ್ಲಿಸಿರುತ್ತಾರೆ. ಇದಕ್ಕೆ ಯಾರಿಂದಲೂ ಪ್ರತಿಕ್ರಿಯೆ ಬಂದಿರುವುದಿಲ್ಲ. ಈ ಸಂಘದಿಂದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ. ಸಂಘವನ್ನು ಇದೇ ರೀತಿ ಮುಂದುವರೆಯಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಕಂಡುಬಂದಿರುವುದರಿಂದ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಮತ್ತು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಎಂಡಬ್ಲ್ಯೂ:69:ಸಿಎಲ್ಎಂ:2001 ದಿನಾಂಕ:21.11.2001ರ ಪ್ರಕಾರ ದತ್ತವಾದ ಅಧಿಕಾರದನ್ವಯ ದಾವಣಗೆರೆ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ಬಿ. ಕುಬೇರಪ್ಪ, ಕೆ.ಸಿ.ಎಸ್. ಆದ ನಾನು ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಕರ್ನಾಟಕ ಮಂಡಕ್ಕಿ ಮತ್ತು ಅವಲಕ್ಕಿ ಉತ್ಪಾದಕರ ಕೈಗಾರಿಕಾ ಸಹಕಾರ ಸಂಘ ನಿ., ದಾವಣಗೆರೆ, ದಾವಣಗೆರೆ ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1)ರನ್ವಯ ಸಹಕಾರ ಸಂಘಗಳ ನಿರೀಕ್ಷಕರು, 1ನೇ ವೃತ್ತ, ದಾವಣಗೆರೆ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ, ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನ ದಿನಾಂಕ:11.12.2008ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪನಿಬಂಧಕರು,
ದಾವಣಗೆರೆ ಜಿಲ್ಲೆ, ದಾವಣಗೆರೆ.

ಪಿ.ಆರ್.4

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ದಾವಣಗೆರೆ ಜಿಲ್ಲೆ, ದಾವಣಗೆರೆ ಇವರ ಕಛೇರಿ

ನಂ.ಡಿಆರ್/ಡಿವಿಜಿ/ಎಲ್‌ಕ್ಯೂಡಿ/ಸಿಆರ್-09/2008-09, ದಿನಾಂಕ:11ನೇ ಡಿಸೆಂಬರ್, 2008

ವಿಷಯ: ಸ್ಥಗಿತಗೊಂಡಿರುವ ಅನುಗ್ರಹ ಪತ್ತಿನ ಸಹಕಾರ ಸಂಘ ನಿ., ದಾವಣಗೆರೆ, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರ ಪ್ರಸ್ತಾವನೆ ದಿನಾಂಕ:10.11.2008.
2) ಈ ಕಛೇರಿಯ ಕಾರಣ ಕೇಳಿ ನೋಟೀಸ್ ಸಮಸಂಖ್ಯೆ ಪತ್ರ ದಿನಾಂಕ:26.09.2008.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ದಾವಣಗೆರೆ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಮೇಲ್ಕಂಡ ಸಂಘದ ಕಾರ್ಯಚಟುವಟಿಕೆಗಳು ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಮಂಡಳಿ ಸಂಘದ ಅಭಿವೃದ್ಧಿ ಬಗ್ಗೆ ಗಮನಿಸುವಲ್ಲಿ ವಿಫಲವಾಗಿರುತ್ತದೆ. ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲ. ಈ ಬಗ್ಗೆ ಉಲ್ಲೇಖ (2)ರ ಪತ್ರಿಕಾ ಪ್ರಕಟಣೆ ನೀಡಿದ್ದು ಸಂಘವು ಅಸ್ತಿತ್ವದಲ್ಲಿರದ ಬಗ್ಗೆ ಮಹಜರು ಮಾಡಿಸಿ, ಕಾರಣ ಸಂಬಂಧಿಸಿದ ನಿರ್ದೇಶಕರಿಗೆ ನೋಟೀಸ್ ಜಾರಿ ಮಾಡಿಸಲು ಸಾಧ್ಯವಾಗಿರುವುದಿಲ್ಲವೆಂದು, ಉಲ್ಲೇಖ (1)ರ ಪತ್ರ ದಿನಾಂಕ:10.11.2008ರಲ್ಲಿ ವರದಿ ಸಲ್ಲಿಸಿರುತ್ತಾರೆ. ಇದಕ್ಕೆ ಯಾರಿಂದಲೂ ಪ್ರತಿಕ್ರಿಯೆ ಬಂದಿರುವುದಿಲ್ಲ. ಈ ಸಂಘದಿಂದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ. ಸಂಘವನ್ನು ಇದೇ ರೀತಿ ಮುಂದುವರೆಯಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಕಂಡುಬಂದಿರುವುದರಿಂದ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಮತ್ತು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಎಂಡಬ್ಲ್ಯೂ:69:ಸಿಎಲ್ಎಂ:2001 ದಿನಾಂಕ:21.11.2001ರ ಪ್ರಕಾರ ದತ್ತವಾದ ಅಧಿಕಾರದನ್ವಯ ದಾವಣಗೆರೆ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ಬಿ. ಕುಬೇರಪ್ಪ, ಕೆ.ಸಿ.ಎಸ್. ಆದ ನಾನು ನನಗೆ ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಅನುಗ್ರಹ ಪತ್ತಿನ ಸಹಕಾರ ಸಂಘ ನಿ., ದಾವಣಗೆರೆ, ದಾವಣಗೆರೆ ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1)ರನ್ವಯ ಶ್ರೀ ಎನ್.ಜಿ. ರುದ್ರಪ್ಪ, ಸಹಕಾರ ಸಂಘಗಳ ನಿರೀಕ್ಷಕರು, ಸಹಾಯಕ ನಿಬಂಧಕರ ಕಛೇರಿ, ದಾವಣಗೆರೆ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ, ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 73(1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನ ದಿನಾಂಕ:11.12.2008ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪನಿಬಂಧಕರು,
ದಾವಣಗೆರೆ ಜಿಲ್ಲೆ, ದಾವಣಗೆರೆ.

ಪಿ.ಆರ್.5

ಸಹಕಾರ ಸಂಘಗಳ ಸಹಾಯಕ ನಿಬಂಧಕರು ಮತ್ತು ವಸೂಲಾತಿ ಅಧಿಕಾರಿ ನಿಯಮ 441 ರವರ ಕಛೇರಿ, ದಾವಣಗೆರೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ. ದೇವರಾಜ ಅರಸ್ ಬಡಾವಣೆ, ದಾವಣಗೆರೆ

ನಂ.ಎಬಿಎನ್/ಮಾರಾಟ/ ಸ್ಥಿರೀಕರಿಸುವ/1/08-09, ದಿನಾಂಕ:17ನೇ ಡಿಸೆಂಬರ್, 2008

ವಿಷಯ: ಹಮ್‌ದರ್ದ್ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ ನಿ. ದಾವಣಗೆರೆ ಇದರ ದಾವಾ ನಂ.196/02-03 ರಲ್ಲಿ ಪಡೆಯಲಾದ ಇ.ಪಿ.ನಂ.639/02-03 ಇದರ ಅಮಲ್ಜಾರಿ ಸಂಬಂಧ, ದಾವಣಗೆರೆ ಸಿಟಿ 5ನೇ ವಾರ್ಡ್, 10ನೇ ಡಿವಿಜನ್, ವಿನೋಬನಗರ, ಡೋರ್ ನಂ.1948/13ಬಿ ಅಳತೆ $12^1/_2$x35 ಅಡಿ ಸೊತ್ತಿನ ಮಾರಾಟ ಸ್ಥಿರೀಕರಣದ ಆದೇಶದ ಬಗ್ಗೆ.

ಉಲ್ಲೇಖ: ನಂ. ವಸೂಲಾತಿ/1/08-09, ದಿನಾಂಕ:16.12.2008ರ ಮಾರಾಟಾಧಿಕಾರಿ ನಿಯಮ 441 ಡಿ.ಡಿ.ಸಿ.ಸಿ. ಬ್ಯಾಂಕ್ ದಾವಣಗೆರೆ ರವರ ಪತ್ರ.

ಪ್ರಸ್ತಾವನೆ:

ಮಾರಾಟಾಧಿಕಾರಿ ನಿಯಮ 441 ದಾವಣಗೆರೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ದಾವಣಗೆರೆ ಇವರು ಶ್ರೀ ಜೆ.ವಿ. ಗುರುಸ್ವಾಮಿ ಬಿನ್ ವೆಂಕಟರಮಣಪ್ಪ ದಾವಣಗೆರೆ ರವರು ಸಾಲಕ್ಕೆ ಆಧಾರ ಮಾಡಿದ ಸೊತ್ತು, ದಾವಣಗೆರೆ ಸಿಟಿ 5ನೇ ವಾರ್ಡ್, 10ನೇ ಡಿವಿಜನ್, ವಿನೋಬನಗರ 3ನೇ ಮೇನ್, 8ನೇ ಕ್ರಾಸ್, ಡೋರ್ ನಂ. 1948/13ಬಿ ಅಳತೆ $12^1/_2$x35 ಅಡಿ ಪೂರ್ವ: ಇದೇ ನಿವೇಶನದ ಉಳಿದ ಜಾಗ, ಪಶ್ಚಿಮ: ನಿವೇಶನ ನಂ.14, ಉತ್ತರ: ಕ್ರಾಸ್ ರಸ್ತೆ, ದಕ್ಷಿಣಕ್ಕೆ: ನಿವೇಶನ ನಂ.7, ಈ ಸೊತ್ತನ್ನು ಹಮ್‌ದರ್ದ್ ಕ್ರೆಡಿಟ್ ಕೋ ಅಪರೇಟಿವ್ ಸೊಸೈಟಿ ನಿಯಮಿತ ದಾವಣಗೆರೆ, ಇವರಿಗೆ ಸದರಿಯವರಿಂದ ವಸೂಲಾಗಬೇಕಾದ ಮೊತ್ತದ ಸಂಬಂಧವಾಗಿ ಹೂಡಿದ ದಾವಾ ನಂ.196/02-03 ರಲ್ಲಿ ಡಿಕ್ರಿ ಪಡೆಯಲಾಗಿದ್ದು ಇದರ ಪ್ರಕಾರ ಇ.ಪಿ.ನಂ. 639/02-03 ರಲ್ಲಿ ಕ್ರಮ ಜರುಗಿಸಿ ದಿನಾಂಕ:07.11.2008 ರಂದು ಮೇಲ್ಕಾಣಿಸಿದ ಸ್ಥಿರಾಸ್ತಿಯನ್ನು ಬಹಿರಂಗ ಹರಾಜಿನಲ್ಲಿ ದಾವಣಗೆರೆ ಜಿಲ್ಲೆ, ದಾವಣಗೆರೆ ವಾಸಿಯಾದ ಶ್ರೀ ಜಿ. ವೆಂಕಟೇಶ್ ಬಿನ್ ಕೆಂಪಗಂಗಪ್ಪ, ಬೇತೂರು ರಸ್ತೆ, ಇಂದಿರಾನಗರ, ದಾವಣಗೆರೆ, ಇವರು ಹೆಚ್ಚಿನ ಬಿಡ್‌ನ್ನು ಮಾಡಿರುವುದರಿಂದ ಸದರಿಯವರಿಗೆ ಸೊಸೈಟಿಯ ಮಾರಾಟಾಧಿಕಾರಿಯವರು ಈ ಸ್ಥಿರಾಸ್ತಿಯನ್ನು ಹರಾಜಿನಲ್ಲಿ ಮಾರಾಟಮಾಡಿರುವುದರ ಸಂಬಂಧ ಈ ಸ್ಥಿರಾಸ್ತಿಗೆ ಸಂಬಂಧಿಸಿದವರು ಯಾವುದೇ ಆಕ್ಷೇಪಣೆಗಳನ್ನು ಇಲ್ಲಿಯವರೆಗೆ ಮಾಡದೇ ಇರುವುದರಿಂದ ಈ ಕೆಳಕಂಡಂತೆ ಆದೇಶಿಸಿದೆ.

ಆದೇಶ

ಕರ್ನಾಟಕ ಸಹಕಾರ ಸಂಘಗಳ ನಿಯಮ 1960 ನಿಯಮ 38(6) ರಡಿಯಲ್ಲಿ ಮಾರಾಟಾಧಿಕಾರಿ ನಿಯಮ 441, ಡಿ.ಡಿ.ಸಿ.ಸಿ. ಬ್ಯಾಂಕ್, ದಾವಣಗೆರೆ ಇವರು ದಿನಾಂಕ:07.11.2008ರಂದು ಬಹಿರಂಗ ಹರಾಜಿನಲ್ಲಿ ಶ್ರೀ ಜೆ.ವಿ. ಗುರುಸ್ವಾಮಿ ಬಿನ್ ವೆಂಕಟರಮಣಪ್ಪ ವಿನೋಬನಗರ, ದಾವಣಗೆರೆ ಇವರ ಸಾಲಕ್ಕೆ ಇವರು ಆಧಾರ ಮಾಡಿರುವ ಸೊತ್ತು, ದಾವಣಗೆರೆ ಸಿಟಿ, 5ನೇ ವಾರ್ಡ್, 10ನೇ ಡಿವಿಜನ್, ವಿನೋಬನಗರ, 3ನೇ ಮೈನ್, 8ನೇ ಕ್ರಾಸ್, ಡೋರ್ ನಂ.1948/ಬಿ, ಅಳತೆ $12^1/_2$x35 ಅಡಿ ಸೊತ್ತನ್ನು ಶ್ರೀ ಜಿ. ವೆಂಕಟೇಶ್ ಬಿನ್ ಕೆಂಪಗಂಗಪ್ಪ, ಇಂದಿರಾನಗರ ಬೇತೂರು ರಸ್ತೆ, ದಾವಣಗೆರೆ, ಇವರಿಗೆ ಕ್ರಮವಾಗಿ ಒಟ್ಟು ರೂ.4,67,000-00 (ನಾಲ್ಕು ಲಕ್ಷದ ಅರವತ್ತೇಳು ಸಾವಿರ ರೂಪಾಯಿ)ಗಳಿಗೆ ಬಹಿರಂಗ ಹರಾಜಿನಲ್ಲಿ ಮಾರಾಟ ಮಾಡಿರುವುದನ್ನು ಸ್ಥಿರೀಕರಿಸಿ ಈ ಮೂಲಕ ಸೇಲ್ ಸರ್ಟಿಫಿಕೇಟನ್ನು ಜಾರಿ ಮಾಡುವ ಸಂಬಂಧವಾಗಿ ಖರೀದಿದಾರರು ಹರಾಜಿನ ಮೊತ್ತಕ್ಕೆ ಸ್ಟ್ಯಾಂಪ್ ಪೇಪರ್ ಖರೀದಿಸಿ, ಈ ಆದೇಶ ತಲುಪಿದ 15 ದಿನಗಳೊಳಗಾಗಿ ಈ ಕೆಳಗೆ ಸಹಿ ಮಾಡಿರುವವರ ಸಮ್ಮುಖದಲ್ಲಿ ಹಾಜರಿಪಡಿಸಲು ಈ ಆದೇಶವನ್ನು ದಿನಾಂಕ:17.12.2008ರಂದು ನನ್ನ ಸ್ವಹಸ್ತ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಜಾರಿ ಮಾಡಿರುತ್ತೇನೆ.

ಜಿ. ವೆಂಕಟೇಶ್ ಬಿನ್ ಕೆಂಪಗಂಗಪ್ಪ, ಬೇತೂರು ರಸ್ತೆ, ಇಂದಿರಾನಗರ, ದಾವಣಗೆರೆ.

ಸಹಕಾರ ಸಂಘಗಳ ಸಹಾಯಕ ನಿಬಂಧಕರು ಹಾಗೂ
ವಸೂಲಾತಿ ಅಧಿಕಾರಿ ನಿ., 441, ದಾವಣಗೆರೆ ಜಿಲ್ಲಾ
ಕೇಂದ್ರ ಸಹಕಾರ ಬ್ಯಾಂಕ್ ನಿ., ದಾವಣಗೆರೆ.

ಪಿ.ಆರ್.7

ಕಾರ್ಮಿಕ ಅಧಿಕಾರಿ ಮತ್ತು ಕಾರ್ಮಿಕ ನಷ್ಟ ಪರಿಹಾರ ಆಯುಕ್ತರ ನ್ಯಾಯಾಲಯ, ಉಪ ವಿಭಾಗ-1, ಬಳ್ಳಾರಿ

ಪ್ರಕರಣ ಸಂಖ್ಯೆ: ಕಾನಪ:530:08:ಎಫ್/1448-49, ದಿನಾಂಕ:3ನೇ ಡಿಸೆಂಬರ್, 2008

ಅರ್ಜಿದಾರರು	ವಿರುದ್ಧ	ಪ್ರತಿವಾದಿಗಳು
1) ಅನುಸೂಯಮ್ಮ ಗಂ: ಲೇಟ್ ಗಂಗಾಧರ, ವಯಸ್ಸು:38 ವರ್ಷ, ವೃತ್ತಿ: ಮನೆಕೆಲಸ.		1) ಶ್ರೀ ಎಲ್.ವಿ. ಕೃಷ್ಣಮೋಹನ್, ತಂ: ಲೇಟ್ ಎಲ್. ವೆಂಕಟೇಶ್ವರರಾವ್, ಲಾರಿ ಮಾಲೀಕರು, ಸಂಖ್ಯೆ: ಕೆಎ-34:9806, 3ನೇ ಮುಖ್ಯರಸ್ತೆ, 4ನೇ ಕ್ರಾಸ್, ಶಾರದ ವಿದ್ಯಾಪೀಠ ಶಾಲೆಯ ಎದುರುಗಡೆ, ಸತ್ಯನಾರಾಯಣ ಪೇಟೆ, ಬಳ್ಳಾರಿ.

2) ಟಿ. ಲಲಿತಮ್ಮ ತಂ: ಲೇಟ್ ಗಂಗಾಧರಪ್ಪ, ವಯಸ್ಸು: 20 ವರ್ಷ, ವೃತ್ತಿ ಏನೂ ಇಲ್ಲ.
ಇಬ್ಬರ ವಾಸ: ತಮ್ಮೇನಹಳ್ಳಿ, ಮೊಳಕಾಲ್ಮೂರ್ (ತಾ), ಚಿತ್ರದುರ್ಗ (ಜಿ) ಪ್ರಸ್ತುತ, ವಾಸ: ಬಾಲಭಾರತಿ ಶಾಲೆ ಹತ್ತಿರ, ಗಾಂಧಿನಗರ, ಬಳ್ಳಾರಿ.

2) ವಿಭಾಗೀಯ ವ್ಯವಸ್ಥಾಪಕರು, ಮೆ: ಓರಿಯಂಟಲ್ ಇನ್ಶೂರೆನ್ಸ್ ಕಂ.ಲಿ., ಪಾರ್ವತಿ ನಗರ, ಬಳ್ಳಾರಿ.

ಪ್ರಕಟಣೆ

ಸದರಿ 1 ಮತ್ತು 2ನೇ ಅರ್ಜಿದಾರರು ತಾವು ಮೃತನ ಹೆಂಡತಿ ಮತ್ತು ಮಗಳಾಗಬೇಕೆಂದು ವಾರಸುದಾರರು ಹಾಗೂ ಶಾಸನಬದ್ಧ ವಾರಸುದಾರರೆಂದು, ವಾಹನ ಸಂಖ್ಯೆ: ಕೆಎ-34:9806 ರಲ್ಲಿ ಕ್ಲೀನರ್‌ನಾಗಿ ಕೆಲಸ ಮಾಡುತ್ತಿದ್ದಾಗ ಅಪಘಾತವಾಗಿ ಮೃತ ಪಟ್ಟಿರುತ್ತಾನೆಂದು, ಸದರಿ ಲಾರಿಗೆ ಪಾರ್ಸಲ್‌ಗೂಡ್ಸ್ ಸಾಮಾನುಗಳನ್ನು ಲೋಡ್‌ಮಾಡಿ ಲಾರಿಗೆ ಬಿಗಿಯಾಗಿ ಹಗ್ಗವನ್ನು ಕಟ್ಟುತ್ತಿದ್ದಾಗ ತುಮಕೂರು ಕಡೆಯಿಂದ ಒಂದುಲಾರಿ ಚಾಲಕ ವೇಗವಾಗಿ ಓಡಿಸಿಕೊಂಡು ಬಂದು ಲಾರಿ ಬಲಭಾಗಕ್ಕೆ ಡಿಕ್ಕಿ ಹೊಡಿಸಿದ್ದರ ಪರಿಣಾಮ ಮೃತ ಗಂಗಾಧರ್‌ಗೆ ಬಲವಾದ ಪೆಟ್ಟುಬಿದ್ದು ಸ್ಥಳದಲ್ಲಿ ಮೃತಪಟ್ಟಿರುತ್ತಾನೆಂದು ತಿಳಿಸುತ್ತಾ ಮೃತನ ಮರಣದ ಪರಿಹಾರವಾಗಿ ನ್ಯಾಯಾಲಯದಲ್ಲಿ ಪರಿಹಾರ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಮೃತನಿಗೆ ಸಂಬಂಧಪಟ್ಟಂತೆ ಬೇರೆ ಯಾರಾದರೂ ವಾರಸುದಾರರಿದ್ದಲ್ಲಿ, ಹಾಗೂ ಸಾರ್ವಜನಿಕರಿಗೆ ಈ ಪ್ರಕಟಣೆ ಮೂಲಕ ತಿಳಿಸುವುದೇನೆಂದರೆ ಈ ಸಂಬಂಧವಾಗಿ ತಮ್ಮ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಈ ಪ್ರಕಟಣೆಯನ್ನು ಈ ನ್ಯಾಯಾಲಯದ ನಾಮಫಲಕದಲ್ಲಿ ಹಾಕಿದ 30 ದಿನಗಳೊಳಗಾಗಿ ಈ ನ್ಯಾಯಾಲಯಕ್ಕೆ ಸಲ್ಲಿಸತಕ್ಕದ್ದು. ಅವಧಿಮೀರಿ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಸಿ.ಹೆಚ್. ಹಿರೇಗೌಡರ್
ಕಾರ್ಮಿಕಾಧಿಕಾರಿ ಮತ್ತು ಕಾರ್ಮಿಕ ನಷ್ಟಪರಿಹಾರ
ಆಯುಕ್ತರು, ಬಳ್ಳಾರಿ ಉಪವಿಭಾಗ-1, ಬಳ್ಳಾರಿ.

ಕಾರ್ಮಿಕ ಅಧಿಕಾರಿ ಮತ್ತು ಕಾರ್ಮಿಕ ನಷ್ಟ ಪರಿಹಾರ ಆಯುಕ್ತರ ನ್ಯಾಯಾಲಯ, ಉಪ ವಿಭಾಗ-1, ಬಳ್ಳಾರಿ
ಪ್ರಕರಣ ಸಂಖ್ಯೆ: ಕಾನಪ:560:08:ಎಫ್/1525-26, ದಿನಾಂಕ:16ನೇ ಡಿಸೆಂಬರ್, 2008

ಅರ್ಜಿದಾರರು **ವಿರುದ್ಧ** **ಪ್ರತಿವಾದಿಗಳು**

1) ಶ್ರೀಮತಿ ಭೀಮಲಿಂಗಮ್ಮ ಗಂಡ: ಲೇಟ್ ಈರಪ್ಪ ಅಲಿಯಾಸ್ ಈರಣ್ಣ, ವಯಸ್ಸು:48 ವರ್ಷ, ವೃತ್ತಿ: ಗೃಹಿಣಿ (ಮೃತನ ಹೆಂಡತಿ)
2) ವೀರಾಂಜನೇಯ ಅಲಿಯಾಸ್ ನಿರಂಜನ್ ತಂ: ಲೇಟ್ ಈರಪ್ಪ ಅಲಿಯಾಸ್ ಈರಣ್ಣ, ವಯಸ್ಸು:30 ವರ್ಷ (ಮೃತನ ಮಗ)
3) ಶ್ರೀ ನಾಗರಾಜ್ ತಂ: ಲೇಟ್ ಈರಪ್ಪ ಅಲಿಯಾಸ್ ಈರಣ್ಣ, ವಯಸ್ಸು:28 ವರ್ಷ (ಮೃತನ ಮಗ)

1) ದಿ ಮ್ಯಾನೇಜರ್, ಮೆ: ತುಂಗಭದ್ರ ಜಿನ್ನಿಂಗ್ ಅಂಡ್ ಪ್ರಸ್ಸಿಂಗ್ ಫ್ಯಾಕ್ಟರಿ, ಅಂದ್ರಾಳ ರೋಡ್, ಬಳ್ಳಾರಿ.
2) ಡಿವಿಜನಲ್ ಮ್ಯಾನೇಜರ್, ಮೆ: ನ್ಯೂ ಇಂಡಿಯಾ ಅಶ್ಯೂರೆನ್ಸ್ ಕಂ.ಲಿ., ಬಳ್ಳಾರಿ.

ಪ್ರಕಟಣೆ

ಸದರಿ 1 ರಿಂದ 3ರವರೆಗಿನ ಅರ್ಜಿದಾರರಾದ ಶ್ರೀಮತಿ ಭೀಮಲಿಂಗಮ್ಮ, ವೀರಾಂಜನೇಯ ಅಲಿಯಾಸ್ ನಿರಂಜನ್ ಮತ್ತು ನಾಗರಾಜ್ ಇವರು ಮೃತ ಈರಪ್ಪ ಅಲಿಯಾಸ್ ಈರಣ್ಣನ ಹೆಂಡತಿ, ಮಕ್ಕಳಾಗಬೇಕೆಂದು, ವಾರಸುದಾರರು ಹಾಗೂ ವಾರಸುದಾರರು ಹಾಗೂ ಅವಲಂಬಿತರೆಂದು ತಿಳಿಸುತ್ತಾ 1ನೇ ಪ್ರತಿವಾದಿಯವರ ಸದರಿ ಕಾರ್ಖಾನೆಯಲ್ಲಿ ಅನ್‌ಸ್ಕಿಲ್ಡ್ ವರ್ಕರ್ ಆಗಿ ಕೆಲಸ ಮಾಡುತ್ತಿದ್ದಾಗ ದಿನಾಂಕ:30.10.2008 ಸುಮಾರು 4.15 ಸಂಜೆ ಸಮಯದಲ್ಲಿ ಕೆಳಗೆ ಬಿದ್ದು ತೀವ್ರತರದ ಗಾಯಗಳಿಗೆ ಈಡಾಗಿ ವಿಮ್ಸ್ ಆಸ್ಪತ್ರೆ, ಬಳ್ಳಾರಿಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಫಲಕಾರಿಯಾಗದೆ ಅಂದೇ 6.15 ಸಂಜೆ ಮೃತಪಟ್ಟಿರುತ್ತಾನೆಂದು ತಿಳಿಸುತ್ತಾ, ಮೃತನ ಮರಣದ ಪರಿಹಾರವಾಗಿ ನ್ಯಾಯಾಲಯದಲ್ಲಿ ಪರಿಹಾರ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಮೃತನಿಗೆ ಸಂಬಂಧಿಸಿದಂತೆ ಬೇರೆ ಯಾರಾದರೂ ವಾರಸುದಾರರಿದ್ದಲ್ಲಿ ಹಾಗೂ ಸಾರ್ವಜನಿಕರಿಗೆ ಈ ಪ್ರಕಟಣೆ ಮೂಲಕ ತಿಳಿಸುವುದೇನೆಂದರೆ ಈ ಸಂಬಂಧವಾಗಿ ತಮ್ಮ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆಯನ್ನು ಈ ನ್ಯಾಯಾಲಯದ ನಾಮಫಲಕದಲ್ಲಿ ಹಾಕಿದ 30 ದಿನಗಳೊಳಗಾಗಿ ಈ ನ್ಯಾಯಾಲಯಕ್ಕೆ ಸಲ್ಲಿಸತಕ್ಕದ್ದು. ಅವಧಿಮೀರಿ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಸಿ.ಹೆಚ್. ಹಿರೇಗೌಡರ್
ಕಾರ್ಮಿಕಾಧಿಕಾರಿ ಮತ್ತು ಕಾರ್ಮಿಕ ನಷ್ಟಪರಿಹಾರ
ಆಯುಕ್ತರು, ಬಳ್ಳಾರಿ ಉಪವಿಭಾಗ-1, ಬಳ್ಳಾರಿ.

ಕಾರ್ಮಿಕ ಅಧಿಕಾರಿ ಮತ್ತು ಕಾರ್ಮಿಕ ನಷ್ಟ ಪರಿಹಾರ ಆಯುಕ್ತರ ನ್ಯಾಯಾಲಯ, ಉಪ ವಿಭಾಗ-1, ಬಳ್ಳಾರಿ
ಪ್ರಕರಣ ಸಂಖ್ಯೆ: ಕಾನಪ:557:08:ಎಫ್/1522-23, ದಿನಾಂಕ:16ನೇ ಡಿಸೆಂಬರ್, 2008

ಅರ್ಜಿದಾರರು **ವಿರುದ್ಧ** **ಪ್ರತಿವಾದಿಗಳು**

1) ಶ್ರೀ ಶೇಖ್‌ಶಾವಲಿ ತಂದೆ: ಖಾಜಾ ಹುಸೇನ್ ವಯಸ್ಸು: 50 ವರ್ಷ, ವೃತ್ತಿ: ಅಗ್ರಿಕಲ್ಚರಲ್ ಕೂಲಿ ವಾಸ: ಸಿರುಗುಪ್ಪ (ಮೃತನ ತಂದೆ)

2) ಶ್ರೀಮತಿ ಫಾತೀಮ ಗಂಡ: ಶೇಖ್‌ಶಾವಲಿ, ವಯಸ್ಸು: 45 ವರ್ಷ, ವೃತ್ತಿ: ಗೃಹಿಣಿ, ವಾರ್ಡ್ ನಂ.10, ಸಿರುಗುಪ್ಪ (ಮೃತನ ತಾಯಿ)

1) ಮೆ: ಅರುಣ್ ಇಂಜಿನೀಯರಿಂಗ್ ಪ್ರಾಜೆಕ್ಟ್ಸ್ ಪ್ರೈ.ಲಿ., 5:2 ವಲಾ ಕ್ರಾಸ್, ಲಾಲ್‌ಬಾಗ್‌ರೋಡ್, 4ನೇ ಕ್ರಾಸ್, ಬೆಂಗಳೂರು.

2) ದಿ ಬ್ರಾಂಚ್ ಮ್ಯಾನೇಜರ್, ಮೆ: ನ್ಯಾಷನಲ್ ಇನ್ಸೂರೆನ್ಸ್ ಕಂ.ಲಿ., ಪಾರ್ವತಿ ನಗರ, ಬಳ್ಳಾರಿ.

ಪ್ರಕಟಣೆ

ಸದರಿ ಅರ್ಜಿದಾರರಾದ ಶ್ರೀ ಶೇಖ್‌ಶಾವಲಿ ಮತ್ತು ಶ್ರೀಮತಿ ಫಾತೀಮ ಇವರು ಮೊಹಮ್ಮದ್ದ ಅಲಿಗೆ ತಂದೆ, ತಾಯಿ, ವಾರಸುದಾರರು ಮತ್ತು ಅವಲಂಬಿತರೆಂದು ತಿಳಿಸುತ್ತಾ 1ನೇ ಪ್ರತಿವಾದಿ ನಿರ್ದೇಶನದ ಮೇರೆಗೆ ದಿನಾಂಕ:02.08.2008 ರಂದು ಕರ್ತವ್ಯದ ಮೇಲಿದ್ದಾಗ 50 ಅಡಿ ಎತ್ತರದ ಟ್ಯಾಂಕ್ ಮೇಲಿನಿಂದ ಕಾಲು ಜಾರಿ ಕೆಳಗೆ ಬಿದ್ದು ಸ್ಥಳದಲ್ಲಿ ಮೃತಪಟ್ಟಿರುತ್ತಾನೆಂದು ಕೂಡಲೇ ಶ್ರೀನಿವಾಸಪುರ, ಕೋಲಾರ್ ಜಿಲ್ಲೆ, ಜನರಲ್ ಆಸ್ಪತ್ರೆ ಇಲ್ಲಿ ಪೋಸ್ಟ್‌ಮಾರ್ಟಂ ಮಾಡಿದ ನಂತರ ಬಾಡಿಯನ್ನು ಹಿಂದಿರುಗಿಸಿದ್ದರೆಂದು, ಮೃತನ ಮರಣದ ಪರಿಹಾರವಾಗಿ ನ್ಯಾಯಾಲಯದಲ್ಲಿ ಪರಿಹಾರ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಮೃತನಿಗೆ ಸಂಬಂಧಿಸಿದಂತೆ ಬೇರೆ ಯಾರಾದರೂ ವಾರಸುದಾರರಿದ್ದಲ್ಲಿ ಹಾಗೂ ಸಾರ್ವಜನಿಕರಿಗೆ ಈ ಪ್ರಕಟಣೆ ಮೂಲಕ ತಿಳಿಸುವುದೇನೆಂದರೆ ಈ ಸಂಬಂಧವಾಗಿ ತಮ್ಮ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆಯನ್ನು ಈ ನ್ಯಾಯಾಲಯದ ನಾಮಫಲಕದಲ್ಲಿ ಹಾಕಿದ 30 ದಿನಗಳೊಳಗಾಗಿ ಈ ನ್ಯಾಯಾಲಯಕ್ಕೆ ಸಲ್ಲಿಸತಕ್ಕದ್ದು, ಅವಧಿಮೀರಿ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಸಿ.ಹೆಚ್. ಹಿರೇಗೌಡರ್
ಕಾರ್ಮಿಕಾಧಿಕಾರಿ ಮತ್ತು ಕಾರ್ಮಿಕ ನಷ್ಟಪರಿಹಾರ
ಆಯುಕ್ತರು, ಬಳ್ಳಾರಿ ಉಪವಿಭಾಗ-1, ಬಳ್ಳಾರಿ.

ಕಾರ್ಮಿಕ ಅಧಿಕಾರಿ ಮತ್ತು ಕಾರ್ಮಿಕ ನಷ್ಟ ಪರಿಹಾರ ಆಯುಕ್ತರ ನ್ಯಾಯಾಲಯ, ಉಪ ವಿಭಾಗ-1, ಬಳ್ಳಾರಿ
ಪ್ರಕರಣ ಸಂಖ್ಯೆ: ಕಾನಪ:508:08:ಎಫ್/1450-57, ದಿನಾಂಕ:3ನೇ ಡಿಸೆಂಬರ್, 2008

ಅರ್ಜಿದಾರರು **ವಿರುದ್ಧ** **ಪ್ರತಿವಾದಿಗಳು**

1) ಶ್ರೀಮತಿ ಹಸೀನ ಬೇಗಂ ಗಂ: ನೂರ್‌ಮೊಹಮ್ಮದ್, ವ:28 ವರ್ಷ, ವೃ:ಗೃಹಿಣಿ, (ಮೃತನ ಹೆಂಡತಿ)

2) ಫೆರೋಜ್ ಖಾನ್ ತಂ: ನೂರ್‌ಮೊಹಮ್ಮದ್, ವಯಸ್ಸು:09 ವರ್ಷ, (ಮೃತನ ಮಗ)

3) ಸಬ್ರಿನ್ ತಂ: ನೂರ್‌ಮೊಹಮ್ಮದ್, ವಯಸ್ಸು:07 ವರ್ಷ, (ಮೃತನ ಮಗಳು)

4) ಸಾಬಿಜಾನ್ ತಂ: ನೂರ್‌ಮೊಹಮ್ಮದ್, ವಯಸ್ಸು:04 ವರ್ಷ, (ಮೃತನ ಮಗ)

5) ನಜಿಯತಂ ಲೇಟ್ ನೂರ್‌ಮಹಮ್ಮದ್ ವ:ಒಂದೂವರೆ ವರ್ಷ. (2 ರಿಂದ 5 ರವರೆಗಿನ ಅರ್ಜಿದಾರರು ಅಪ್ರಾಪ್ತರು, ಅವರ ನಿಗಾವಾನಿ ತಾಯಿ 1ನೇ ಅರ್ಜಿದಾರಳು)

ಎಲ್ಲರ ವಾಸ: 328-ಎ.ಎಸ್.ಯು.ಜಿ. ಹೈಸ್ಕೂಲ್, ಬಂಡಿಮೋಟ್, ನೂರಾನಿಹೋಟಲ್ ಹಿಂದೆ, ಬೆಂಗಳೂರು ರಸ್ತೆ, ಬಳ್ಳಾರಿ.

6) ಫಜಲ್ ಖಾನ್ ತಂ: ಸರ್ದಾರ್ ಖಾನ್ ವಯಸ್ಸು:55 ವರ್ಷ (ಮೃತನ ತಂದೆ) ಖಾಸೀಂಬೀ ತಂ: ಫಜಲ್‌ಖಾನ್, ವಯಸ್ಸು:50 ವರ್ಷ ಇಬ್ಬರ ವಾಸ: ಮೇಲಿನಂತೆ.

1) ರಮೇಶ್ ಪರಶುರಾಮ್ ಪುರಿಯ ತಂ: ಬಾಬುಲಾಲ್ ಪರಶುರಾಮ್‌ಪುರಿಯ, ಲಾರಿ ಮಾಲೀಕರು, ಸಂಖ್ಯೆ: ಕೆಎ-35-3707, 16:110, ಪರಶುರಾಮಪುರಿಯ ಕಾಂಪ್ಲೆಕ್ಸ್, ವಿಶಾಲ್ ಪ್ರತೀಕ್‌ಲಾಡ್ಜ್ ಎದುರುಗಡೆ, ಬಳ್ಳಾರಿ.

2) ದಿ ಮ್ಯಾನೇಜರ್, ಐ.ಸಿ.ಐ.ಸಿ.ಐ. ಲೋಂಬಾರ್ಡ್, ಮೋಟಾರ್ ಇನ್ಸೂರೆನ್ಸ್ ಕಂ.ಲಿ., ಬಳ್ಳಾರಿ.

ಪ್ರಕಟಣೆ

ಸದರಿ 1 ರಿಂದ 7ರವರೆಗಿನ ಅರ್ಜಿದಾರರೆಲ್ಲರೂ ತಾವು ನೂರ್ ಮೊಹಮ್ಮದ್‌ಗೆ ಹೆಂಡತಿ, ಮಕ್ಕಳು ಹಾಗೂ ತಂದೆ–ತಾಯಿಗಳಾಗಬೇಕೆಂದು ಹಾಗೂ ಶಾಸನಬದ್ಧವಾರಸುದಾರರು, ಅವಲಂಬಿತರೆಂದು ತಿಳಿಸಿ ಪ್ರತಿವಾದಿ ಬಳಿ ಚಾಲಕನಾಗಿ ಕೆಲಸ ಮಾಡುತ್ತಿದ್ದು ದಿನಾಂಕ:29.08.2008ರಂದು ಅವರ ನಿರ್ದೇಶನದ ಮೇರೆಗೆ ಹಲಕುಂದಿಬಳಿ ರಸ್ತೆಯಲ್ಲಿ ತಗ್ಗು ಇದ್ದುದ್ದರಿಂದ ಬ್ರೇಕ್ ಹಾಕಲು ಪ್ರಯತ್ನಿಸಿದಾಗ ಕಂಟ್ರೋಲ್ ಆಗದೆ ಉರುಳಿಬಿದ್ದ ಪರಿಣಾಮ ಅಪಘಾತ ಸಂಭವಿಸಿ ತೀವ್ರತರದ ಗಾಯಗಳಿಗೀಡಾಗಿ ಸ್ಥಳದಲ್ಲಿ ಮೃತಪಟ್ಟಿರುತ್ತಾನೆಂದು ತಿಳಿಸುತ್ತಾ ಮೃತನ ಮರಣದ ಪರಿಹಾರವಾಗಿ ನಷ್ಟ ಪರಿಹಾರ ಕೋರಿ ಈ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ಈ ಸಂಬಂಧವಾಗಿ ಬೇರೆ ಯಾರಾದರೂ ವಾರಸುದಾರರಿದ್ದಲ್ಲಿ ಹಾಗೂ ಸಾರ್ವಜನಿಕರಿಗೆ ಈ ಪ್ರಕಟಣೆ ಮೂಲಕ ತಿಳಿಸುವುದೇನೆಂದರೆ ಈ ಸಂಬಂಧವಾಗಿ ಆಕ್ಷೇಪಣೆಗಳು ತಮ್ಮವೇನಾದರೂ ಇದ್ದಲ್ಲಿ ಈ ಪ್ರಕಟಣೆಯನ್ನು ಈ ನ್ಯಾಯಾಲಯದ ನಾಮಫಲಕದಲ್ಲಿ ಹಾಕಿದ 30 ದಿನಗಳೊಳಗಾಗಿ ಈ ನ್ಯಾಯಾಲಯದಲ್ಲಿ ಸಲ್ಲಿಸತಕ್ಕದ್ದು. ಅವಧಿಮೀರಿ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಸಿ.ಹೆಚ್. ಹಿರೇಗೌಡರ್
ಕಾರ್ಮಿಕಾಧಿಕಾರಿ ಮತ್ತು ಕಾರ್ಮಿಕ ನಷ್ಟಪರಿಹಾರ
ಆಯುಕ್ತರು, ಬಳ್ಳಾರಿ ಉಪವಿಭಾಗ–1, ಬಳ್ಳಾರಿ.

ಪಿ.ಆರ್.10

ವಾಣಿಜ್ಯ ತೆರಿಗೆ ಇಲಾಖೆ

ಅಧಿಸೂಚನೆ

ಸಂಖ್ಯೆ: ಎಂಎಸ್‌ಸಿ/ಐಒ/ಸಿಆರ್–175/06–07, ದಿನಾಂಕ:7ನೇ ನವೆಂಬರ್, 2008

1) ಮಾಹಿತಿ ಹಕ್ಕು ಅಧಿನಿಯಮ 2005, (2005ರ ಕೇಂದ್ರ ಕಾಯ್ದೆ ಸಂಖ್ಯೆ:22) ಅಡಿ ಈ ಹಿಂದೆ ಹೊರಡಿಸಲಾದ ಅಧಿಸೂಚನೆ ದಿನಾಂಕ:03.01.2007ರ ಕೋಷ್ಟಕದ ಎರಡನೇ ಕಾಲಂನ ಕ್ರಮಸಂಖ್ಯೆ (5)ರಲ್ಲಿ ಮಂಗಳೂರು ವಿಭಾಗೀಯ (ಆಡಳಿತ ಮತ್ತು ವಸೂಲಿ) ಮತ್ತು ಮಂಗಳೂರು ವಿಭಾಗೀಯ (ಜಾರಿ) ಕಛೇರಿಗಳಿಗೆ ಸಂಬಂಧಿಸಿದಂತೆ ಈ ಕೆಳಗಿನಂತೆ ಮಾರ್ಪಾಡು ಮಾಡಿ ಆದೇಶ ಹೊರಡಿಸಲಾಗಿದೆ.

2) ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ: ಆಇ 184 ಸಮಯ/2005, ದಿನಾಂಕ:22.09.2005ರ ಪ್ರಕಾರ ಸಾರ್ವಜನಿಕ ಪ್ರಾಧಿಕಾರವೆಂದು ಪರಿಗಣಿತವಾದ ಈ ಕೆಳಗೆ ಸಹಿ ಮಾಡಿದ ಅಧಿಕಾರಿಯು ಮಾಹಿತಿ ಹಕ್ಕು ಕಾಯ್ದೆ 2005, (2005ರ ಕೇಂದ್ರ ಕಾಯ್ದೆ ಸಂಖ್ಯೆ:22) ಸೆಕ್ಷನ್ 5(1)ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಮಂಗಳೂರು ವಿಭಾಗಕ್ಕೆ (ಆಡಳಿತ ಮತ್ತು ವಸೂಲಿ) ಸಂಬಂಧಿಸಿದಂತೆ, ಸಾರ್ವಜನಿಕ ಮಾಹಿತಿ ಅಧಿಕಾರಿಗಳಾಗಿ ನಿಯೋಜಿಸಲಾಗಿದ್ದ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತರು (ಕೇಂದ್ರ ಕಛೇರಿ) ಮತ್ತು ಪತ್ರಾಂಕಿತ ವ್ಯವಸ್ಥಾಪಕ ಹುದ್ದೆಯನ್ನು ಕ್ರಮವಾಗಿ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತರು (ಜಾರಿ–4), ಮಂಗಳೂರು ಹಾಗೂ ವಾಣಿಜ್ಯ ತೆರಿಗೆ ಅಧಿಕಾರಿ (ಪತ್ರಾಂಕಿತ ವ್ಯವಸ್ಥಾಪಕರು), ಡಿ.ವಿ.ಒ. ಮಂಗಳೂರು, ಎಂದು ಮರು ನಾಮಕರಣ ಮಾಡಿರುವುದರಿಂದ, ಹಾಗೂ ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು (ಜಾರಿ) ಮಂಗಳೂರು ವಿಭಾಗ, ಮಂಗಳೂರು, ಈ ವಿಭಾಗೀಯ ಕಛೇರಿಯಲ್ಲಿ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತರು (ಕೇಂದ್ರ ಸ್ಥಾನ) ಹಾಗೂ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆ ಇಲ್ಲದಿರುವ ಕಾರಣದಿಂದ, ವಾಣಿಜ್ಯ ತೆರಿಗೆ ಅಧಿಕಾರಿ (ಜಾರಿ–3), ಮಂಗಳೂರು–ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಯವರನ್ನು ವಾಣಿಜ್ಯ ತೆರಿಗೆ ಜಂಟಿ ಆಯುಕ್ತರ ವಿಭಾಗೀಯ ಕಛೇರಿ (ಆಡಳಿತ ಮತ್ತು ವಸೂಲಿ), ಮಂಗಳೂರು ವಿಭಾಗ, ಮಂಗಳೂರು ಹಾಗೂ ವಾಣಿಜ್ಯ ತೆರಿಗೆ ಜಂಟಿ ಆಯುಕ್ತರ ವಿಭಾಗೀಯ ಕಛೇರಿ (ಜಾರಿ), ಮಂಗಳೂರು– ಕಛೇರಿಗಳಲ್ಲಿ ಮಾಹಿತಿಯನ್ನು ಒದಗಿಸಲು ಮಾಹಿತಿ ಹಕ್ಕು ಅಧಿನಿಯಮದಡಿಯಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಯಾಗಿ ತತ್‌ಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶ/ಅಧಿಸೂಚನೆ ಹೊರಡಿಸುವ ತನಕ ಕಾರ್ಯನಿರ್ವಹಿಸುವಂತೆ ನಿಯೋಜಿಸಲಾಗಿದೆ.

ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ)
ಬೆಂಗಳೂರು.

ಪಿ.ಆರ್.11

ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು ಇವರ ನಡವಳಿ

ಸಂಖ್ಯೆ: ಸಿಬ್ಬಂದಿ.ಶಿಸ್ತು.ಅಗೈಹಾ.25/2005–06, ದಿನಾಂಕ:16ನೇ ಡಿಸೆಂಬರ್, 2008

ವಿಷಯ: ಶ್ರೀ ಸಿ.ಎನ್. ಮಂಜುನಾಥ್, ಬಾಂದು ಜವಾನರು, ತಹಶೀಲ್ದಾರ್ ಕಛೇರಿ, ಸಕಲೇಶಪುರ ಇವರ ವಿರುದ್ಧದ ಶಿಸ್ತು ಕ್ರಮ ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಉಲ್ಲೇಖ: 1) ಭೂದಾಖಲೆಗಳ ಜಂಟಿ ನಿರ್ದೇಶಕರು, ಮೈಸೂರು ಇವರ ಕಾರಣ ಕೇಳಿ ನೋಟೀಸು (ಆರೋಪ ಪಟ್ಟಿಯೊಂದಿಗೆ) ಸಂಖ್ಯೆ: ಸಿಬ್ಬಂದಿ.ಶಿಸ್ತು.ಅನಗೈ.32/2003–04, ದಿನಾಂಕ:29.03.2005.

2) ವಿಚಾರಣಾಧಿಕಾರಿಗಳನ್ನು ನೇಮಕ ಮಾಡಿದ ಈ ಕಛೇರಿ ನಡವಳಿ ಸಂಖ್ಯೆ: ಸಿಬ್ಬಂದಿ.ಶಿಸ್ತು.ಅಗೈಹಾ.25/2005–06, ದಿನಾಂಕ:08.08.2006.

3) ವಿಚಾರಣಾಧಿಕಾರಿಗಳ ವರದಿ ಸಂಖ್ಯೆ: ಸಿಬ್ಬಂದಿ.ಶಿಸ್ತು.ಅಗೈಹಾ.25/2005-06, ದಿನಾಂಕ:24.11.2006.

4) ಈ ಕಛೇರಿಯ 2ನೇ ಕಾರಣ ಕೇಳಿ ನೋಟೀಸು ಸಂಖ್ಯೆ: ಸಿಬ್ಬಂದಿ.ಶಿಸ್ತು.ಅಗೈಹಾ.25/2005-06, ದಿನಾಂಕ:23.02.2007/11.08.2008.

ಪ್ರಸ್ತಾವನೆ:

ಶ್ರೀ ಸಿ.ಎನ್. ಮಂಜುನಾಥ, ಬಾಂದು ಜವಾನರು, ತಹಶೀಲ್ದಾರ್ ಕಛೇರಿ, ಸಕಲೇಶಪುರ ಆದ ಇವರನ್ನು ಈ ಹಿಂದೆ ಭೂದಾಖಲೆಗಳ ಸಹಾಯಕ ನಿರ್ದೇಶಕರು, ಹಾಸನ ಕಛೇರಿಯಿಂದ, ಭೂದಾಖಲೆಗಳ ಸಹಾಯಕ ನಿರ್ದೇಶಕರು, ಮದ್ದೂರು ಮರುಭೂಮಾಪನ ಕಛೇರಿಗೆ ಕರ್ತವ್ಯ ನಿರ್ವಹಿಸಲು ನಿಯೋಜಿಸಿದ್ದು ನೌಕರರು ದಿನಾಂಕ:03.10.2003 ರಿಂದ 02.11.2004 ರವರೆಗೆ ಯಾವುದೇ ರಜೆ ಅರ್ಜಿ ಸಲ್ಲಿಸದೆ, ಸಕ್ಷಮ ಪ್ರಾಧಿಕಾರಿಯಿಂದ ಪೂರ್ವಾನುಮತಿ ಪಡೆಯದೆ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಾಗಿರುವ ಬಗ್ಗೆ ಭೂದಾಖಲೆಗಳ ಜಂಟಿ ನಿರ್ದೇಶಕರು, ಮೈಸೂರು ರವರು ಕಾರಣ ಕೇಳಿ ನೋಟೀಸನ್ನು ಆರೋಪ ಪಟ್ಟಿಯೊಂದಿಗೆ ದಿನಾಂಕ:29.03.2005 ರಂದು ಜಾರಿ ಮಾಡಿರುತ್ತಾರೆ. ನೌಕರರ ವಿರುದ್ಧ ಮಾಡಲಾದ ಆರೋಪಗಳನ್ನು ಈ ಕೆಳಕಂಡಂತೆ ಪುನರುಚ್ಚರಿಸಿದೆ. (ಸದರಿ ನೌಕರರನ್ನು ಇನ್ನು ಮುಂದೆ ಆಪಾದಿತ ನೌಕರರೆಂದು ಕರೆಯಲಾಗಿದೆ)

ಆರೋಪ

ಭೂದಾಖಲೆಗಳ ಸಹಾಯಕ ನಿರ್ದೇಶಕರು, ಹಾಸನ ಕಛೇರಿಯಿಂದ ಭೂದಾಖಲೆಗಳ ಸಹಾಯಕ ನಿರ್ದೇಶಕರು, ಮದ್ದೂರು ಮರು ಭೂಮಾಪನ ಕಛೇರಿಗೆ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸಲು ಶ್ರೀ ಸಿ.ಎನ್. ಮಂಜುನಾಥ್, ಬಾಂದು ಜವಾನರಾದ ನಿಮ್ಮನ್ನು ನಿಯೋಜನೆ ಮಾಡಿದ್ದು, ಅವಧಿಯಲ್ಲಿ ದಿನಾಂಕ:03.10.2003 ರಿಂದ 02.11.2004 ರವರೆಗೆ ಯಾವುದೇ ರಜೆ ಅರ್ಜಿಯನ್ನು ಸಲ್ಲಿಸದೆ, ಸಕ್ಷಮ ಪ್ರಾಧಿಕಾರಿಯವರಿಂದ ರಜೆ ಮಂಜೂರಾತಿಯನ್ನಾಗಲೀ, ಪೂರ್ವಾನುಮತಿಯನ್ನಾಗಲೀ ಪಡೆಯದೇ ಸರ್ಕಾರಿ ಕರ್ತವ್ಯಕ್ಕೆ ಅನಧಿಕೃತವಾಗಿ ಗೈರು ಹಾಜರಾಗಿರುತ್ತೀರಿ. ಆದ್ದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ 1957ರ ನಿಯಮ 106ಎ ಮತ್ತು 108ನ್ನು ಉಲ್ಲಂಘಿಸಿದಂತಾಗಿ ದುರ್ನಡತೆ ಎಸಗಿದಂತಾಗಿದೆ.

ಆ ಕಾರಣ ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(I) (II) ಮತ್ತು (III)ನ್ನು ಉಲ್ಲಂಘಿಸಿದಂತಾಗಿದ್ದು, ಇದರಿಂದ ಈ ಆರೋಪ.

ಆಪಾದಿತ ನೌಕರರು ದಿನಾಂಕ:26.04.2005ರಂದು ನೋಟೀಸನ್ನು ಸ್ವೀಕರಿಸಿ ಯಾವುದೇ ಹೇಳಿಕೆಯನ್ನು ನೀಡದ ಕಾರಣ, ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ದಿನಾಂಕ:08.08.2006ರ ಈ ಕಛೇರಿ ನಡವಳಿಯಲ್ಲಿ ವಿಚಾರಣಾಧಿಕಾರಿಗಳನ್ನು ನೇಮಕ ಮಾಡಿದಂತೆ ವಿಚಾರಣಾಧಿಕಾರಿಗಳು ದಿನಾಂಕ:10.11.2006ರಂದು ವಿಚಾರಣೆ ಕರೆದಿದ್ದು, ಆಪಾದಿತರು ಆಪಾದನೆಗಳನ್ನು ಒಪ್ಪಿಕೊಂಡಿರುವ ಬಗ್ಗೆ ಲಿಖಿತ ಹೇಳಿಕೆಯನ್ನು ನೀಡಿರುವ ಹಿನ್ನಲೆಯಲ್ಲಿ ಆರೋಪಗಳು ಸಾಬೀತಾಗಿರುತ್ತವೆಯೆಂದು ವಿಚಾರಣಾಧಿಕಾರಿಗಳು ಅಭಿಪ್ರಾಯ ಪಟ್ಟಿರುತ್ತಾರೆ. ವಿಚಾರಣಾಧಿಕಾರಿಗಳ ಅಭಿಪ್ರಾಯವನ್ನು ಒಪ್ಪಿ, ಈ ಕಛೇರಿಯಿಂದ ದಿನಾಂಕ:23.02.2007ರಂದು ವಿಚಾರಣಾ ವರದಿಯೊಂದಿಗೆ 2ನೇ ಕಾರಣ ಕೇಳಿ ನೋಟೀಸನ್ನು ಜಾರಿ ಮಾಡಲಾಗಿರುತ್ತದೆ. ಆದರೆ ಸದರಿ ನೋಟೀಸನ್ನು ಸ್ವೀಕರಿಸಿದ ಬಗ್ಗೆ ನೌಕರರಿಂದ ದ್ವಿಪ್ರತಿಯು ಸ್ವೀಕೃತವಾಗದ ಕಾರಣ, ಸದರಿ ನೋಟೀಸನ್ನು ಪುನಃ ದಿನಾಂಕ:11.08.2008 ರ ಪತ್ರದೊಂದಿಗೆ ಜಾರಿ ಮಾಡಿದ್ದು, ನೌಕರರು ದಿನಾಂಕ:28.08.2008ರಂದು ಸ್ವೀಕರಿಸಿ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಆಪಾದಿತ ನೌಕರರು ಈ ಹಿಂದೆಯೂ (ದಿನಾಂಕ:06.11.1998ರಿಂದ 11.05.2000 ರವರೆಗೆ) ಅನಧಿಕೃತ ಗೈರು ಹಾಜರಾದ ಆರೋಪ ಕುರಿತು ಆರೋಪ ಸಾಬೀತಾಗಿದ್ದು, ಭೂದಾಖಲೆಗಳ ಜಂಟಿ ನಿರ್ದೇಶಕರು, ಮೈಸೂರು ಇವರ ನಡವಳಿ ಸಂಖ್ಯೆ: ಸಿಬ್ಬಂದಿ.ಶಿಸ್ತು.ಅನಗೈ-52/99-2000, ದಿನಾಂಕ:16.02.2000ರಲ್ಲಿ 5 ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತ ತಡೆಹಿಡಿಯುವ ದಂಡನೆಯನ್ನು ವಿಧಿಸಲಾಗಿರುತ್ತದೆ. ಹಾಗೂ ಸದರಿಯವರು ದಿನಾಂಕ:12.04.2007 ರಿಂದ 31.01.2008 ರವರೆಗೆ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಾಗಿರುವ ಬಗ್ಗೆ ಮತ್ತೊಂದು ಶಿಸ್ತು ಪ್ರಕರಣವು ಜಾರಿಯಲ್ಲಿದ್ದು, ಆಪಾದಿತರು ಕರ್ತವ್ಯಕ್ಕೆ ಪದೇ ಪದೇ ದೀರ್ಘಾವಧಿಯ ಅನಧಿಕೃತ ಗೈರು ಹಾಜರಾಗುವ ಪ್ರವೃತ್ತಿಯನ್ನು ಬೆಳೆಸಿಕೊಂಡು ಗಂಭೀರವಾದ ಕರ್ತವ್ಯ ಚ್ಯುತಿಯನ್ನು ಎಸಗುವುದನ್ನು ಪರಿಶೀಲಿಸಿದಾಗ, ಸದರಿಯವರಿಗೆ ಸರ್ಕಾರಿ ಕೆಲಸ ನಿರ್ವಹಿಸುವಲ್ಲಿ ಯಾವುದೇ ಶ್ರದ್ಧೆ, ಆಸಕ್ತಿ ಇಲ್ಲದಿರುವುದು ಕಂಡು ಬರುತ್ತಿದ್ದು, ಆರೋಪ ಸಾಬೀತಾಗಿರುವ ಬಗ್ಗೆ ವಿಚಾರಣಾಧಿಕಾರಿಗಳ ವರದಿ, ವಿಚಾರಣಾ ವೇಳೆಯಲ್ಲಿ ಆಪಾದಿತರು ನೀಡಿದ ಹೇಳಿಕೆಯನ್ನು ಪರಿಶೀಲಿಸಿ, ಆಪಾದಿತರಿಗೆ ಕಠಿಣ ದಂಡನೆಯನ್ನು ವಿಧಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡಂತೆ ಆದೇಶಿಸಿದೆ.

ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಶ್ರೀ ಸಿ.ಎನ್. ಮಂಜುನಾಥ, ಬಾಂದು ಜವಾನರವರು ದಿನಾಂಕ:03.10.2003 ರಿಂದ 02.11.2004ರವರೆಗೆ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಾಗಿರುವುದು, ಆರೋಪಿತ ನೌಕರರು

ಈ ಅಂಶವನ್ನು ಒಪ್ಪಿಕೊಂಡಿರುವ ಸಂದರ್ಭದಲ್ಲಿ ಸಾಬೀತಾಗಿರುತ್ತದೆ. ದಿನಾಂಕ:03.10.2003 ರಿಂದ ಯಾವುದೇ ರಜೆ ಅರ್ಜಿಯನ್ನು ಸಲ್ಲಿಸದೆ, ಸರ್ಕಾರಿ ಕೆಲಸಕ್ಕೆ ದೀರ್ಘಕಾಲದವರೆಗೆ ಅನಧಿಕೃತ ಗೈರು ಹಾಜರಾಗಿರುವುದು ಕೆ.ಸಿ.ಎಸ್.ಆರ್. ನಿಯಮ 108ನ್ನು ಆಕರ್ಷಿಸಿರುವ ಹಿನ್ನಲೆಯಲ್ಲಿ ಆಪಾದಿತ ನೌಕರರು ಗಂಭೀರವಾದ ಕರ್ತವ್ಯ ಲೋಪ ಮತ್ತು ದುರ್ವರ್ತನೆ ಎಸಗಿದಂತಾಗಿರುತ್ತದೆ.

ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿ ನಿಯಮ 108ರ ಪ್ರಕಾರ, ಸರ್ಕಾರವು ಪ್ರಕರಣದ ವಿಶೇಷ ಸಂದರ್ಭಗಳಿಂದಾಗಿ ಅನ್ಯಥಾ ನಿರ್ಣಯಿಸದ ಹೊರತು 4 ತಿಂಗಳು ಹಾಗೂ ಹೆಚ್ಚಿನ ಅವಧಿಗೆ ರಜೆ ಪಡೆದುಕೊಳ್ಳದೇ ಕರ್ತವ್ಯಕ್ಕೆ ವಿಮುಖರಾಗಿ ಗೈರು ಹಾಜರಾಗುವ ಸರ್ಕಾರಿ ನೌಕರರನ್ನು ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರಲ್ಲಿ ನಮೂದಿಸಲಾದ ಕಾರ್ಯವಿಧಾನವನ್ನನುಸರಿಸಿ ಸೇವೆಯಿಂದ ವಜಾ ಮಾಡಬಹುದಾಗಿರುತ್ತದೆ ಅಥವಾ ಸೇವೆಯಿಂದ ತೆಗೆದು ಹಾಕಬಹುದಾಗಿರುತ್ತದೆ. ಆಪಾದಿತರಿಗೆ ಸರ್ಕಾರಿ ಕೆಲಸ ನಿರ್ವಹಿಸುವಲ್ಲಿ ಆಸಕ್ತಿ ಇಲ್ಲದೆ ಪದೇ ಪದೇ ಗೈರು ಹಾಜರಾಗುವ ಪ್ರವೃತ್ತಿ ಹೊಂದಿದ್ದು, ಈ ಪ್ರಕರಣದಲ್ಲಿ ಆಪಾದಿತರು ಯಾವುದೇ ಪ್ರಬಲ ಕಾರಣವಿಲ್ಲದೇ, ಸರ್ಕಾರಿ ಕೆಲಸಕ್ಕೆ ಹಾಜರಾಗದೆ ದಿನಾಂಕ:03.10.2003 ರಿಂದ 02.11.2004ರವರೆಗೆ ಅನಧಿಕೃತವಾಗಿ ಗೈರು ಹಾಜರಾಗಿರುವುದು ತೀವ್ರತೆರನಾದ ದುರ್ವರ್ತನೆ ಆಗಿರುವುದರಿಂದ ಹಾಗೂ ಅವರ ವಿರುದ್ಧ ಮಾಡಲಾದ ಆರೋಪವು ಸಾಬೀತಾಗಿರುವ ಹಿನ್ನಲೆಯಲ್ಲಿ ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 8(viii) ರೊಂದಿಗೆ ಓದಿಕೊಂಡ ನಿಯಮ 9(3)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಜೀವ್ ಚಾವ್ಲಾ, ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು ಆದ ನಾನು ಶ್ರೀ ಸಿ.ಎನ್. ಮಂಜುನಾಥ, ಬಾಂದು ಜವಾನರು, ತಹಶೀಲ್ದಾರ್ ಕಛೇರಿ, ಸಕಲೇಶಪುರ ಇವರನ್ನು ಸೇವೆಯಿಂದ ವಜಾ ಮಾಡಿ ಆದೇಶಿಸಿದ್ದೇನೆ.

ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ
ಮತ್ತು ಭೂದಾಖಲೆಗಳು, ಬೆಂಗಳೂರು.

ಪಿ.ಆರ್.12

COMMERCIAL TAXES DEPARTMENT

PROCEEDINGS OF THE COMMISSIONER OF COMMERCIAL TAXES, (KARNATAKA), BANGALORE-CLARIFICATION UNDER SECTION 59(4) OF THE KARNATAKA VALUE ADDED TAX ACT, 2003

Sub: KVAT Act, 2003-Clarification under Section 59(4) regarding the rate of tax applicable on sale of 'old battery scrap' or condemned battery' or 'scrapped battery'.

Ref: Application Dated:01.09.2008 of Sri Abdul Rahim Proprietor, M/s H.T.M. Metal Mart, No.43, H. Ramaiah Lane, Seegebeli, Bangalore-53.

In its application cited above, Sri Abdul Rahim Proprietor, M/s H.T.M. Metal Mart, No.43, H. Ramaiah Lane, Seegebeli, Bangalore-53, has sought clarification regarding the rate of tax applicable on sale of 'old battery scrap' or condemned battery' or 'scrapped battery'

2. Section 59(4) of the Karnataka Value Added Tax Act, 2003 empowers the Commissioner of Commercial Taxes to clarify the rate of tax payable under the Act, if he considers it necessary or expedient so to do, for the purpose of maintaining uniformity in the work of assessments and collection of revenue. It is examined and found that the clarification requested by the petitioner is within the scope of the aforesaid provision and it is necessary that the clarification be issued for the purpose of maintaining uniformity in the work of assessments and collection of revenue.

3. Hence the following clarification is issued.

Clarification No. CLR.CR.135/08-09, Dated:2nd December, 2008

It is hereby clarified that 'old battery scrap' or 'condemned battery' or 'scrapped battery' is taxable at 12.5% under Section 4 (1)(b) of the KVAT Act, 2003.

B.A. HARISH GOWDA
Commissioner of Commercial Taxes,
(Karnataka), Bangalore.

PR-18

ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು ಇವರ ನಡವಳಿ
ಸಂಖ್ಯೆ: ಸಿಬ್ಬಂದಿ.ಶಿಸ್ತು.(ಅಗೈಹಾ)30/05-06, ದಿನಾಂಕ:16ನೇ ಡಿಸೆಂಬರ್, 2008

ವಿಷಯ: ಶ್ರೀ ನಾರಾಯಣ ದ್ವಿದ.ಭೂಮಾಪಕರು, ತಹಶೀಲ್ದಾರ್ ಕಛೇರಿ, ಬೇಲೂರು ಇವರ ಅನಧಿಕೃತ ಗೈರು ಹಾಜರಿ ಬಗ್ಗೆ ಶಿಸ್ತುಕ್ರಮ ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಉಲ್ಲೇಖ: 1) ಈ ಕಛೇರಿಯ ಸಮಸಂಖ್ಯೆಯ ಕಾರಣ ಕೇಳಿ ನೋಟೀಸು (ಆರೋಪ ಪಟ್ಟಿಯೊಂದಿಗೆ) ದಿನಾಂಕ:09.08.2006.

2) ವಿಚಾರಣಾಧಿಕಾರಿಗಳನ್ನು ನೇಮಕ ಮಾಡಿದ ಈ ಕಛೇರಿಯ ಸಮಸಂಖ್ಯೆಯ ಆದೇಶ ದಿನಾಂಕ:09.03.2007.

3) ವಿಚಾರಣಾಧಿಕಾರಿಗಳ ವರದಿ ಸಂಖ್ಯೆ: ಶಿಸ್ತು.ಅಗೈಹಾ.7/06-07, ದಿನಾಂಕ:13.02.2008.

4) ಈ ಕಛೇರಿಯ 2ನೇ ಕಾರಣ ಕೇಳಿ ನೋಟೀಸು ಸಮಸಂಖ್ಯೆ ದಿನಾಂಕ:09.06.2008.

ಪ್ರಸ್ತಾವನೆ:

ಶ್ರೀ ನಾರಾಯಣ, ದ್ವಿತೀಯ ದರ್ಜೆ ಭೂಮಾಪಕರು, ತಹಶೀಲ್ದಾರ್ ಕಛೇರಿ, ಬೇಲೂರು ಆದ ಇವರು ಈ ಹಿಂದೆ ತಾಲ್ಲೂಕು ಭೂಮಾಪನ ಕಛೇರಿ, ನಂಜನಗೂಡಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ದಿನಾಂಕ:30.10.2004 ರಿಂದ ದಿನಾಂಕ:10.05.2005 ರವರೆಗೆ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಾಗಿರುವ ಬಗ್ಗೆ ಭೂದಾಖಲೆಗಳ ಉಪ ನಿರ್ದೇಶಕರು, ಮೈಸೂರು ರವರು ನೌಕರರ ವಿರುದ್ಧ ಕ್ರಮ ಜರುಗಿಸಲು ಕೋರಿ ಭೂದಾಖಲೆಗಳ ಜಂಟಿ ನಿರ್ದೇಶಕರು, ಮೈಸೂರು ರವರನ್ನು ಕೋರಿದ್ದು, ಇಲಾಖೆಯು ಕಂದಾಯ ಇಲಾಖೆಯೊಡನೆ ಕಾರ್ಯವಿಲೀನಗೊಂಡ ಕಾರಣ, ಭೂದಾಖಲೆಗಳ ಜಂಟಿ ನಿರ್ದೇಶಕರ ಕಛೇರಿಗಳು ರದ್ದಾದ ಹಿನ್ನಲೆಯಲ್ಲಿ ಪ್ರಕರಣವು ಕೇಂದ್ರ ಕಛೇರಿಯಲ್ಲಿ ಸ್ವೀಕೃತಗೊಂಡಿದ್ದು, ಶ್ರೀ ನಾರಾಯಣ, ದ್ವಿತೀಯ ದರ್ಜೆ ಭೂಮಾಪಕರವರ ಅನಧಿಕೃತ ಗೈರು ಹಾಜರಿ ಮತ್ತು ಕರ್ತವ್ಯಲೋಪ ಕುರಿತು ಕಾರಣ ಕೇಳಿ ನೋಟೀಸನ್ನು (ಆರೋಪ ಪಟ್ಟಿಯೊಂದಿಗೆ) ಉಲ್ಲೇಖ (1) ರಂತೆ ಜಾರಿ ಮಾಡಲಾಗಿರುತ್ತದೆ.

ಸದರಿ ನೌಕರರ ವಿರುದ್ಧ ಮಾಡಲಾದ ಆರೋಪಗಳನ್ನು ಈ ಕೆಳಕಂಡಂತೆ ಪುನರುಚ್ಚರಿಸಿದೆ. (ಇನ್ನು ಮುಂದೆ ನೌಕರರನ್ನು ಆರೋಪಿತ ನೌಕರರೆಂದು ಕರೆಯಲಾಗಿದೆ)

ಆರೋಪ-1

ಶ್ರೀ ನಾರಾಯಣ, ಎರಡನೇ ದರ್ಜೆ ಭೂಮಾಪಕರು, ಹಾಲಿ ತಹಶೀಲ್ದಾರ್ ಕಛೇರಿ, ನಂಜನಗೂಡು ಆದ ನೀವು ಈ ಹಿಂದೆ ತಾಲ್ಲೂಕು ಭೂಮಾಪನ ಕಛೇರಿ, ನಂಜನಗೂಡಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ದಿನಾಂಕ:30.10.2004 ರಿಂದ 10.05.2005 ರವರೆಗೆ ಕಛೇರಿ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಾಗಿರುತ್ತೀರಿ. ನೀವು ಸಕ್ಷಮ ಪ್ರಾಧಿಕಾರಿಯಿಂದ ರಜೆ ಮಂಜೂರಾತಿಯನ್ನಾಗಲೀ, ಪೂರ್ವಾನುಮತಿಯನ್ನಾಗಲೀ ಪಡೆಯದೇ ಅನಧಿಕೃತ ಗೈರು ಹಾಜರಾಗಿ ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿ 1957ರ ನಿಯಮ 106(ಎ) ಮತ್ತು ನಿಯಮ 108ಅನ್ನು ಉಲ್ಲಂಘಿಸಿ ದುರ್ನಡತೆ ಎಸಗಿದಂತಾಗಿರುವುದರಿಂದ ಹಾಗೂ ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿ 1966ರ ನಿಯಮ 3(i) (ii) ಮತ್ತು (iii)ನ್ನು ಉಲ್ಲಂಘಿಸಿದ್ದು, ಈ ಮೂಲಕ ಶಿಸ್ತುಕ್ರಮಕ್ಕೆ ಅನುವು ಮಾಡಿಕೊಟ್ಟಿರುತ್ತೀರಿ. ಆ ಕಾರಣ ಈ ಆರೋಪ.

ಆರೋಪ-2:

ತಹಶೀಲ್ದಾರ್ ಕಛೇರಿ, ನಂಜನಗೂಡು ಇಲ್ಲಿ ಎರಡನೇ ದರ್ಜೆ ಭೂಮಾಪಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ನಾರಾಯಣ ಆದ ನೀವು ಈ ಹಿಂದೆ ತಾಲ್ಲೂಕು ಭೂಮಾಪನ ಕಛೇರಿ, ನಂಜನಗೂಡಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ದುರಸ್ತಿ ಹಾಗೂ ಅಡವಿ ಕೆಲಸಕ್ಕಾಗಿ ಪಡೆದಿರುವ 22 ಕಡತಗಳನ್ನು ಯಾವುದೇ ಕೆಲಸ ನಿರ್ವಹಿಸದೇ, ಕಛೇರಿಗೂ ಹಿಂದಿರುಗಿಸದೇ ನಿಮ್ಮಲ್ಲಿಯೇ ಬಾಕಿ ಇಟ್ಟುಕೊಂಡಿರುತ್ತೀರಿ. ಆ ಕಾರಣ, ಕೇಂದ್ರ ಕಛೇರಿಯ ಸುತ್ತೋಲೆ ಸಂಖ್ಯೆ: ತಾಂ.ಅ:38/95-96, ದಿನಾಂಕ:21.12.1995ರ ಸೂಚನೆಗಳನ್ನು ಉಲ್ಲಂಘಿಸಿದಂತಾಗಿ ಕಡತಗಳನ್ನು ನಿಮ್ಮಲ್ಲಿಯೇ ಬಾಕಿ ಉಳಿಸಿಕೊಂಡು ಈ ಮೂಲಕ ಸಾರ್ವಜನಿಕರಿಗೆ ಅನಾನುಕೂಲ ಉಂಟಾಗಲು ಕಾರಣರಾಗಿರುತ್ತೀರಿ. ಆ ಕಾರಣ ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(i) (ii) ಮತ್ತು (iii) ಅನ್ನು ಉಲ್ಲಂಘಿಸಿ ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) 1957ರನ್ವಯ ಶಿಸ್ತುಕ್ರಮ ಜರುಗಿಸಲು ಅನುವು ಮಾಡಿಕೊಟ್ಟಿರುತ್ತೀರಾ. ಆದ ಕಾರಣ ಈ ಆರೋಪ.

ಸದರಿ ನೋಟೀಸನ್ನು ನೌಕರರು ದಿನಾಂಕ:13.12.2006ರಂದು ಸ್ವೀಕರಿಸಿ, ಯಾವುದೇ ರಕ್ಷಣಾ ಹೇಳಿಕೆಯನ್ನು ನೀಡದ ಕಾರಣ, ಆರೋಪಗಳಲ್ಲಿನ ಸತ್ಯಾಸತ್ಯತೆಯನ್ನು ತಿಳಿಯಲು ಉಲ್ಲೇಖ (2) ರ ಈ ಕಛೇರಿ ನಡವಳಿಯಲ್ಲಿ ವಿಚಾರಣಾಧಿಕಾರಿಗಳನ್ನು ನೇಮಕ ಮಾಡಿದಂತೆ, ವಿಚಾರಣಾಧಿಕಾರಿಗಳು ವಿಚಾರಣೆ ನಡೆಸಿರುತ್ತಾರೆ. ವಿಚಾರಣಾಧಿಕಾರಿಗಳು, ದಿನಾಂಕ:16.07.2007, 24.07.2007, 13.08.2007, 01.09.2007, 12.09.2007, 06.10.2007, 25.10.2007, 12.11.2007, 26.11.2007, 26.12.2007 ರಂದು ವಿಚಾರಣೆ ನಡೆಸಿದ್ದು, ದಿನಾಂಕ:24.07.2007, 13.08.2007 ಹಾಗೂ

ದಿನಾಂಕ:01.09.2007ರ ವಿಚಾರಣೆಗೆ ಮಾತ್ರ ಆಪಾದಿತ ನೌಕರರು ಹಾಜರಾಗಿ, ದಿನಾಂಕ:12.09.2007, 06.10.2007, 25.02.2007, 12.11.2007, 26.11.2007, 26.12.2007ರಂದು ನಡೆಸಿದ ವಿಚಾರಣೆಗೆ ಸಾಕ್ಷಿದಾರರು ಹಾಜರಾಗಿದ್ದು, ಆಪಾದಿತ ನೌಕರರು ಹಾಜರಾಗಿರುವುದಿಲ್ಲ. ಸಾಕ್ಷಿದಾರರನ್ನು ವಿಚಾರಣೆಗೆ ಒಳಪಡಿಸಿದ ಸಮಯದಲ್ಲಿ ಆರೋಪಿತರು ವಿಚಾರಣೆಗೆ ಹಾಜರಾಗದ ಕಾರಣ, ಏಕಪಕ್ಷೀಯವಾಗಿ ಕ್ರಮಕೈಗೊಂಡು ಸಾಕ್ಷ್ಯ ದಾಖಲೆಗಳ ಆಧಾರದ ಮೇಲೆ ಆರೋಪಗಳು ಸಾಬೀತಾಗಿರುತ್ತದೆಯೆಂದು ವಿಚಾರಣಾಧಿಕಾರಿಗಳು ಅಭಿಪ್ರಾಯಪಟ್ಟಿರುತ್ತಾರೆ. ವಿಚಾರಣಾಧಿಕಾರಿಗಳ ಅಭಿಪ್ರಾಯವನ್ನು ಒಪ್ಪಿ ನೌಕರರಿಗೆ ಈ ಕಛೇರಿಯಿಂದ ದಿನಾಂಕ:09.06.2008 ರಂದು ಎರಡನೇ ಕಾರಣ ಕೇಳಿ ನೋಟೀಸು ಜಾರಿ ಮಾಡಿದ್ದು, ನೌಕರರು ದಿನಾಂಕ:18.08.2008ರಂದು ಸ್ವೀಕರಿಸಿ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಆಪಾದಿತರ ನೌಕರರ ಸೇವಾ ವಿವರಗಳನ್ನು ಪರಿಶೀಲಿಸಲಾಗಿ, ದಿನಾಂಕ:24.06.2000 ರಂದು ಗ್ರೂಪ್ ಡಿ ಹುದ್ದೆಯಿಂದ ಎರಡನೇ ದರ್ಜೆ ಭೂಮಾಪಕರ ಹುದ್ದೆಗೆ ಬಡ್ತಿ ಪಡೆದಿದ್ದು, ಸದರಿಯವರ 2000–01, 2001–02, 2002–03, 2003–04ರ ಸಾಲಿನ ಕಾರ್ಯ ನಿರ್ವಹಣಾ ವರದಿಗಳನ್ನು ಪರಿಶೀಲಿಸಲಾಗಿ, ನೌಕರರ ಕೆಲಸ ಕಾರ್ಯಗಳು ಸಾಧಾರಣ ಮಟ್ಟಕ್ಕಿಂತ ಕಡಿಮೆ ಇರುವುದಾಗಿ ಮೌಲ್ಯಮಾಪನವಾಗಿದ್ದು, ಎರಡನೇ ದರ್ಜೆ ಭೂಮಾಪಕರ ಹುದ್ದೆಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳನ್ನು ಈವರೆಗೂ ಪಾಸು ಮಾಡಿರುವುದಿಲ್ಲ ಹಗೂ ಸದರಿಯವರ ಕರ್ತವ್ಯಕ್ಕೆ ಆಗಿಂದಾಗ್ಗೆ ದೀರ್ಘಾವಧಿಯ ಅನಧಿಕೃತ ಗೈರು ಹಾಜರಾಗುವ ಪ್ರವೃತ್ತಿಯನ್ನು ಬೆಳೆಸಿಕೊಂಡಿದ್ದು, ಸರ್ಕಾರಿ ಕೆಲಸ ನಿರ್ವಹಿಸುವಲ್ಲಿ ಯಾವುದೇ ಶ್ರದ್ದೆ, ಆಸಕ್ತಿ ಇಲ್ಲದಿರುವುದು ಕಂಡು ಬಂದಿರುವ ಹಿನ್ನೆಲೆಯಲ್ಲಿ ನೌಕರರಿಗೆ ಕಠಿಣ ದಂಡನೆ ವಿಧಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟು, ಈ ಕೆಳಕಂಡಂತೆ ಆದೇಶಿಸಿದೆ.

ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಶ್ರೀ ನಾರಾಯಣ, ದ್ವಿತೀಯ ದರ್ಜೆ ಭೂಮಾಪಕರು, ತಹಶೀಲ್ದಾರ್ ಕಛೇರಿ, ಬೇಲೂರು ಇವರ ವಿರುದ್ಧ ಮಾಡಲಾದ ಆರೋಪಗಳನ್ನು ಪರಿಶೀಲಿಸಲಾಗಿ, ನೌಕರರು ದಿನಾಂಕ:30.10.2004 ರಿಂದ 10.05.2005 ರವರೆಗೆ ಅನಧಿಕೃತ ಗೈರು ಹಾಜರಾಗಿರುವುದು ಹಾಗೂ ಕರ್ತವ್ಯಲೋಪವೆಸಗಿರುವುದು ಸಾಕ್ಷಿ ದಾಖಲೆಗಳಿಂದ ಮತ್ತು ವಿಚಾರಣಾ ವರದಿಯಿಂದ ಸಾಬೀತಾಗಿರುತ್ತದೆ.

ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿ ನಿಯಮ 108ರನ್ವಯ ಸರ್ಕಾರವು ಪ್ರಕರಣದ ವಿಶೇಷ ಸಂದರ್ಭಗಳಿಂದಾಗಿ ಅನ್ಯಥಾ ನಿರ್ಣಯಿಸದ ಹೊರತು 4 ತಿಂಗಳು ಹಾಗೂ ಹೆಚ್ಚಿನ ಅವಧಿಗೆ ರಜೆ ಪಡೆದುಕೊಳ್ಳದೇ ಕರ್ತವ್ಯಕ್ಕೆ ಗೈರು ಹಾಜರಾಗುವ ಸರ್ಕಾರಿ ನೌಕರರು ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರಲ್ಲಿ ನಮೂದಿಸಲಾದ ಕಾರ್ಯವಿಧಾನವನ್ನನುಸರಿಸಿ ಸೇವೆಯಿಂದ ವಜಾ ಮಾಡಬಹುದಾಗಿರುತ್ತದೆ ಅಥವಾ ಸೇವೆಯಿಂದ ತೆಗೆದು ಹಾಕಬಹುದಾಗಿರುತ್ತದೆ. ಈ ಪ್ರಕರಣದಲ್ಲಿ ಆರೋಪಿತ ನೌಕರರು ಯಾವುದೇ ಪ್ರಬಲವಾದ ಕಾರಣವಿಲ್ಲದೇ, ಸರ್ಕಾರಿ ಕೆಲಸಕ್ಕೆ ಹಾಜರಾಗದೆ ದೀರ್ಘಾವಧಿಯ ಅನಧಿಕೃತ ಗೈರು ಹಾಜರಾಗಿರುವುದು ತೀವ್ರತೆರನಾದ ದುರ್ವರ್ತನೆ ಆಗಿರುವುದರಿಂದ ಅವರ ವಿರುದ್ಧ ಮಾಡಲಾದ ಆರೋಪವು ಸಾಬೀತಾಗಿರುವ ಹಿನ್ನೆಲೆಯಲ್ಲಿ ಹಾಗೂ 2000–01, 2001–02, 2002–03, 2003–04ರ ಸಾಲಿನ ಆಪಾದಿತರ ಕಾರ್ಯನಿರ್ವಹಣಾ ವರದಿಗಳಲ್ಲಿ, ನೌಕರರ ಕೆಲಸ ಕಾರ್ಯಗಳು ಸಾಧಾರಣ ಮಟ್ಟಕ್ಕಿಂತ ಕಡಿಮೆ ಇರುವುದಾಗಿ ಮೌಲ್ಯಮಾಪನವಾಗಿದ್ದು, ಎರಡನೇ ದರ್ಜೆ ಭೂಮಾಪಕರ ಹುದ್ದೆಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳನ್ನು ಪಾಸು ಮಾಡದೇ, ಸರ್ಕಾರಿ ಕೆಲಸ ನಿರ್ವಹಿಸುವಲ್ಲಿ ಯಾವುದೇ ಶ್ರದ್ದೆ, ಆಸಕ್ತಿಯನ್ನು ತೋರದ ಹಿನ್ನೆಲೆಯುಲ್ಲಿ, ಅವರನ್ನು ಸೇವೆಯಿಂದ ವಜಾ ಮಾಡುವುದು ಸೂಕ್ತವೆಂದು ತೀರ್ಮಾನಿಸಿ, ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 8(viii) ರೊಂದಿಗೆ ಓದಿಕೊಂಡ ನಿಯಮ 9(3)ರಲ್ಲಿನ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಜೀವ್ ಚಾವ್ಲಾ, ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು ಆದ ನಾನು ಶ್ರೀ ನಾರಾಯಣ, ದ್ವಿತೀಯ ದರ್ಜೆ ಭೂಮಾಪಕರು, ತಹಶೀಲ್ದಾರ್ ಕಛೇರಿ, ಬೇಲೂರು ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ವಜಾ ಮಾಡಿ ಆದೇಶಿಸಿದ್ದೇನೆ.

ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ
ಮತ್ತು ಭೂದಾಖಲೆಗಳು, ಬೆಂಗಳೂರು.

ಪಿ.ಆರ್.13

ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು ಇವರ ನಡವಳಿ
ಸಂಖ್ಯೆ: ಸಿಬ್ಬಂದಿ.ಶಿಸ್ತು.ಅಗೈಹಾ.11/2005–06, ದಿನಾಂಕ:16ನೇ ಡಿಸೆಂಬರ್, 2008

ವಿಷಯ: ಶ್ರೀ ಹೆಚ್.ಪಿ. ತೀರ್ಥಪ್ರಸಾದ್, ಬಾಂದು ಜವಾನರು, ತಹಶೀಲ್ದಾರ್ ಕಛೇರಿ, ಮಡಿಕೇರಿ ಇವರ ವಿರುದ್ಧದ ಶಿಸ್ತು ಕ್ರಮ ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಉಲ್ಲೇಖ: 1) ಈ ಕಛೇರಿಯ ಸಮಸಂಖ್ಯೆ ಕಾರಣ ಕೇಳಿ ನೋಟೀಸು (ಆರೋಪ ಪಟ್ಟಿಯೊಂದಿಗೆ) ದಿ:18.03.2006 ಮತ್ತು 24.07.2006.

2) ವಿಚಾರಣಾಧಿಕಾರಿಗಳನ್ನು ನೇಮಕ ಮಾಡಿದ ಈ ಕಛೇರಿ ನಡವಳಿ ಸಮಸಂಖ್ಯೆ: ದಿನಾಂಕ:20.06.2007.
3) ನೌಕರರ ಮನವಿ ದಿನಾಂಕ:08.08.2007.
4) ಈ ಕಛೇರಿ ಅಧಿಕೃತ ಜ್ಞಾಪನ ಸಂಖ್ಯೆ: ಸಿಬ್ಬಂದಿ.ಜಿಡಿ.ವರ್ಗ.62/05-06, ದಿನಾಂಕ:12.01.2006.
5) ಕರ್ತವ್ಯಕ್ಕೆ ಹಾಜರಾಗಲು ಅನುಮತಿ ನೀಡಿರುವ ಈ ಕಛೇರಿ ಪತ್ರ ಸಮಸಂಖ್ಯೆ ದಿನಾಂಕ:16.10.2007.
6) ವಿಚಾರಣಾಧಿಕಾರಿಗಳ ವರದಿ ಸಂಖ್ಯೆ: ಸಿಬ್ಬಂದಿ.ಶಿಸ್ತು.ಅ.ಗ್ಯ.3/07-08, ದಿನಾಂಕ:17.04.2008.
7) ಈ ಕಛೇರಿಯ ಎರಡನೇ ಕಾರಣ ಕೇಳಿ ನೋಟೀಸು ಸಮಸಂಖ್ಯೆ ದಿನಾಂಕ:05.06.2008.

ಸ್ತಾವನೆ:

ಶ್ರೀ ಹೆಚ್.ಪಿ. ತೀರ್ಥಪ್ರಸಾದ್, ಬಾಂದು ಜವಾನ, ತಹಶೀಲ್ದಾರ್ ಕಛೇರಿ, ಮಡಿಕೇರಿ ಆದ ಇವರು ಇಲಾಖೆಯು ಂದಾಯ ಇಲಾಖೆಯೊಂದಿಗೆ ಕಾರ್ಯ ವಿಲೀನಗೊಂಡ ಸಂದರ್ಭದಲ್ಲಿ ಸದರಿ ಕಛೇರಿಗೆ ಸ್ಥಳ ನಿಯುಕ್ತಿಗೊಂಡು, ನಾಂಕ:09.05.2005 ರಂದು ಕರ್ತವ್ಯಕ್ಕೆ ಹಾಜರಾಗಿ, ದಿನಾಂಕ:10.05.2005 ರಿಂದ ಇಲ್ಲಿಯವರೆಗೆ ಕರ್ತವ್ಯಕ್ಕೆ ಅನಧಿಕೃತ ರುಹಾಜರಾಗಿರುವ ಬಗ್ಗೆ ಈ ಕಛೇರಿಯಿಂದ ಕಾರಣ ಕೇಳಿ ನೋಟೀಸನ್ನು ಆರೋಪ ಪಟ್ಟಿಯೊಂದಿಗೆ ದಿನಾಂಕ:18.03.2006 ತ್ತು 24.07.2006 ರಂದು ಜಾರಿ ಮಾಡಿದ್ದು, ನೌಕರರು ಖಾಯಂ ವಿಳಾಸದಲ್ಲಿ ಲಭ್ಯವಿಲ್ಲದ ಕಾರಣ, ನೌಕರರ ಹೋದರಿಯವರಿಗೆ ಜಾರಿ ಮಾಡಿ ಮನೆಯ ಬಾಗಿಲಿಗೆ ಅಂಟಿಸಲಾಗಿರುತ್ತದೆ.

ನೌಕರರ ವಿರುದ್ಧ ಮಾಡಲಾದ ಆರೋಪಗಳನ್ನು ಈ ಕೆಳಕಂಡಂತೆ ಪುನರುಚ್ಚರಿಸಿದೆ. (ಸದರಿ ನೌಕರರನ್ನು ಇನ್ನು ಬಂದೆ ಆಪಾದಿತ ನೌಕರರೆಂದು ಕರೆಯಲಾಗಿದೆ)

ರೋಪ

ತಹಸೀಲ್ದಾರ್, ಕಛೇರಿ, ಮಡಿಕೇರಿ ತಾಲ್ಲೂಕು, ಮಡಿಕೇರಿಗೆ ಬಾಂದು ಜವಾನರಾಗಿ ಕಂದಾಯ ಇಲಾಖೆಯೊಂದಿಗೆ ರ್ಯವಿಲೀನ ಸಂದರ್ಭದಲ್ಲಿ ಸ್ಥಳ ನಿಯುಕ್ತಿ ಹೊಂದಿ ದಿನಾಂಕ:09.05.2005 ರಂದು ಕರ್ತವ್ಯಕ್ಕೆ ಹಾಜರಾದ ಶ್ರೀ ರ್ಥಪ್ರಸಾದ್ ಆದ ನೀವು ದಿನಾಂಕ:10.05.2005 ರಿಂದ ಇಲ್ಲಿಯವರೆಗೆ ಯಾವುದೇ ರಜೆ ಅರ್ಜಿಯನ್ನು ಸಲ್ಲಿಸದೆ, ಸಕ್ಷಮ ಧಿಕಾರಿಯವರಿಂದ ರಜೆ ಮಂಜೂರಾತಿಯನ್ನಾಗಲೀ, ಪೂರ್ವಾನುಮತಿಯನ್ನಾಗಲೀ ಪಡೆಯದೆ ಕರ್ತವ್ಯಕ್ಕೆ ಅನಧಿಕೃತ ಗೈರು ಜರಾಗುವ ಮೂಲಕ ಕಛೇರಿಯ ದೈನಂದಿನ ಕೆಲಸಕ್ಕೆ ತೊಂದರೆ ಉಂಟು ಮಾಡಿರುತ್ತೀರಿ. ಇದರಿಂದ ಕರ್ನಾಟಕ ಸರ್ಕಾರಿ ವಾ ನಿಯಮಾವಳಿ 1957ರ ನಿಯಮ 106(ಎ) ಮತ್ತು 108ನ್ನು ಉಲ್ಲಂಘಿಸಿದಂತಾಗಿ ದುರ್ನಡತೆ ಎಸಗಿರುತ್ತೀರಿ. ಆ ರಣ, ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(I) (II) ಮತ್ತು (III)ನ್ನು ಉಲ್ಲಂಘಿಸಿ ರ್ಣಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) 1957ರನ್ವಯ ಶಿಸ್ತುಕ್ರಮ ಜರುಗಿಸಲು ಅನುವು ಾಡಿಕೊಟ್ಟಿರುತ್ತೀರಿ. ಆದಕಾರಣ ಈ ಆರೋಪ.

ಆಪಾದಿತ ನೌಕರರು ಸದರಿ ನೋಟೀಸಿಗೆ ಯಾವುದೇ ಹೇಳಿಕೆಯನ್ನು ನೀಡದ ಕಾರಣ ದಿನಾಂಕ:20.06.2007ರ ಡವಳಿಯಲ್ಲಿ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ವಿಚಾರಣಾಧಿಕಾರಿಗಳನ್ನು ನೇಮಕ ಮಾಡಿದಂತೆ, ಚಾರಣಾಧಿಕಾರಿಗಳು ದಿನಾಂಕ:27.07.2007ರಂದು ವಿಚಾರಣೆ ನಡೆಸಿದ್ದು, ಆಪಾದಿತರು ವಿಚಾರಣೆಗೆ ಹಾಜರಾಗಿ ತಮ್ಮ ರುದ್ಧ ಮಾಡಲಾದ ಆರೋಪವನ್ನು ಒಪ್ಪಿಕೊಂಡು ಲಿಖಿತ ಹೇಳಿಕೆಯನ್ನು ನೀಡಿರುತ್ತಾರೆ. ಹಾಗೂ ಕರ್ತವ್ಯಕ್ಕೆ ಹಾಜರಾಗಲು ನುಮತಿಯನ್ನು ಕೋರಿರುತ್ತಾರೆ. ಸಾಕ್ಷಿದಾರರು ಸಹ ಆಪಾದಿತ ನೌಕರರ ಗೈರುಹಾಜರಿ ಬಗ್ಗೆ ಸಾಕ್ಷ್ಯ ನುಡಿದಿರುವ ಮೇರೆಗೆ ಚಾರಣಾಧಿಕಾರಿಗಳು, ಆಪಾದಿತ ವಿರುದ್ಧ ಮಾಡಲಾದ ಆರೋಪವು ಸಾಬೀತಾಗಿದೆಯೆಂದು ಅಭಿಪ್ರಾಯಪಟ್ಟಿರುತ್ತಾರೆ. ಚಾರಣಾಧಿಕಾರಿಗಳ ಅಭಿಪ್ರಾಯವನ್ನು ಒಪ್ಪಿ ಈ ಕಛೇರಿಯಿಂದ ನೌಕರರಿಗೆ 2ನೇ ಕಾರಣ ಕೇಳಿ ನೋಟೀಸನ್ನು ವಿಚಾರಣಾ ದಿಯೊಂದಿಗೆ ದಿನಾಂಕ:05.06.2008ರಂದು ಜಾರಿ ಮಾಡಲಾಗಿರುತ್ತದೆ. ಆಪಾದಿತರು ಸ್ವವಿಳಾಸದಲ್ಲಿ ಲಭ್ಯವಾಗದ ಕಾರಣ, ರಿ ನೋಟೀಸನ್ನು ಆಪಾದಿತರ ಸಹೋದರಿಯು ಪಡೆದಿದ್ದು, ಒಂದು ಪ್ರತಿಯನ್ನು ಮನೆಯ ಬಾಗಿಲಿಗೆ ಅಂಟಿಸಿ ಪಕ್ಕದವರಿಂದ ಮಹಜರ್ ಪಡೆಯಲಾಗಿರುತ್ತದೆ. ಆಪಾದಿತರು ಸದರಿ ನೋಟೀಸಿಗೆ ಈವರೆಗೂ ಯಾವುದೇ ಬರಹ ಳಿಕೆಯನ್ನು ಸಲ್ಲಿಸಿರುವುದಿಲ್ಲ. ಹಾಗೂ ದಿನಾಂಕ:08.08.2007 ರಂದು ಆಪಾದಿತರು ಮನವಿಯನ್ನು ಸಲ್ಲಿಸಿ, ಅನಧಿಕೃತ ುಹಾಜರಾದ ಬಗ್ಗೆ ತಮ್ಮ ತಪ್ಪನ್ನು ಮನ್ನಿಸಿ, ಕರ್ತವ್ಯಕ್ಕೆ ಹಾಜರಾಗಲು ಅನುಮತಿಯನ್ನು ನೀಡಲು ಕೋರಿರುವ ಮೇರೆಗೆ ಈ ೇರಿಯ ಅಧಿಕೃತ ಜ್ಞಾಪನ ದಿನಾಂಕ:12.01.2006ರಲ್ಲಿ ತಹಸೀಲ್ದಾರ್, ಭಟ್ಕಳ ಕಛೇರಿಗೆ ವರ್ಗಾಯಿಸಿರುವ ಹಿನ್ನೆಲೆಯಲ್ಲಿ ಈ ೇರಿ ಪತ್ರ ದಿನಾಂಕ:16.10.2007ರಲ್ಲಿ ಕರ್ತವ್ಯಕ್ಕೆ ಹಾಜರಾಗಲು ಅನುಮತಿಯನ್ನು ನೀಡಿದ್ದರೂ ಸಹ ಆಪಾದಿತರು ರ್ಗಾವಣೆಗೊಂಡ ಕಛೇರಿಯಲ್ಲಿ ಕರ್ತವ್ಯಕ್ಕೆ ಹಾಜರಾಗದೆ ಗೈರುಹಾಜರಿಯಲ್ಲಿಯೇ ಮುಂದುವರೆದಿದ್ದು ಎರಡನೇ ಕಾರಣ ಕೇಳಿ ೋಟೀಸಿಗೆ ಯಾವುದೇ ಹೇಳಿಕೆಯನ್ನು ನೀಡದೆ ಇರುವುದನ್ನು ಪರಿಶೀಲಿಸಿದಾಗ, ಸದರಿಯವರಿಗೆ ಸರ್ಕಾರಿ ಕೆಲಸ ರ್ವಹಿಸುವಲ್ಲಿ ಯಾವುದೇ ಶ್ರದ್ಧೆ ಆಸಕ್ತಿ ಇಲ್ಲದಿರುವುದು ಕಂಡುಬರುತ್ತಿದ್ದು, ಆರೋಪ ಸಾಬೀತಾಗಿರುವ ಬಗ್ಗೆ

ವಿಚಾರಣಾಧಿಕಾರಿಗಳ ವರದಿ, ಸಾಕ್ಷ್ಯ, ದಾಖಲೆಗಳು ಹಾಗೂ ಆಪಾದಿತರು ವಿಚಾರಣೆ ವೇಳೆಯಲ್ಲಿ ನೀಡಿರುವ ಹೇಳಿಕೆಯನ್ನು ಪರಿಶೀಲಿಸಿ, ಆಪಾದಿತರಿಗೆ ಕಠಿಣ ದಂಡನೆಯನ್ನು ವಿಧಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡಂತೆ ಆದೇಶಿಸಿದೆ.

ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಶ್ರೀ ಹೆಚ್.ಪಿ. ತೀರ್ಥಪ್ರಸಾದ್, ಬಾಂದು ಜವಾನ ದಿನಾಂಕ:10.05.2005 ರಿಂದ ಕರ್ತವ್ಯಕ್ಕೆ ಅನಧಿಕೃತ ಗೈರುಹಾಜರಾಗಿರುವುದು ಆರೋಪಿತ ನೌಕರರು ಈ ಅಂಶವನ್ನು ಒಪ್ಪಿಕೊಂಡಿರುವ ಸಂದರ್ಭದಲ್ಲಿ ಸಾಬೀತಾಗಿರುತ್ತದೆ. ದಿನಾಂಕ:10.05.2005 ರಿಂದ ಯಾವುದೇ ರಜೆ ಅರ್ಜಿಯನ್ನು ಸಲ್ಲಿಸದೆ, ಸರ್ಕಾರಿ ಕೆಲಸಕ್ಕೆ ದೀರ್ಘಕಾಲದ ವರೆಗೆ ಅನಧಿಕೃತ ಗೈರು ಹಾಜರಾಗಿರುವುದು ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಯ ನಿಯಮ 108 ಅನ್ನು ಆಕರ್ಷಿಸಿರುವ ಹಿನ್ನೆಲೆಯಲ್ಲಿ ಆಪಾದಿತ ನೌಕರರು ಗಂಭೀರವಾದ ಕರ್ತವ್ಯ ಲೋಪ ಹಾಗೂ ದುರ್ವರ್ತನೆ ಎಸಗಿದಂತಾಗಿರುತ್ತದೆ.

ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಯ ನಿಯಮ 108ರ ಪ್ರಕಾರ, ಸರ್ಕಾರವು ಪ್ರಕರಣದ ವಿಶೇಷ ಸಂದರ್ಭಗಳಿಂದಾಗಿ ಅನ್ಯಥಾ ನಿರ್ಣಯಿಸದ ಹೊರತು 4 ತಿಂಗಳು ಹಾಗೂ ಹೆಚ್ಚಿನ ಅವಧಿಗೆ ರಜೆ ಪಡೆದುಕೊಳ್ಳದೇ ಕರ್ತವ್ಯಕ್ಕೆ ವಿಮುಖರಾಗಿ ಗೈರು ಹಾಜರಾಗುವ ಸರ್ಕಾರಿ ನೌಕರರನ್ನು ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರಲ್ಲಿ ನಮೂದಿಸಲಾದ ಕಾರ್ಯವಿಧಾನವನ್ನನುಸರಿಸಿ ಸೇವೆಯಿಂದ ವಜಾ ಮಾಡಬಹುದಾಗಿರುತ್ತದೆ ಅಥವಾ ಸೇವೆಯಿಂದ ತೆಗೆದು ಹಾಕಬಹುದಾಗಿರುತ್ತದೆ. ಈ ಪ್ರಕರಣದಲ್ಲಿ ಆರೋಪಿತ ನೌಕರರು ಯಾವುದೇ ಪ್ರಬಲವಾದ ಕಾರಣವಿಲ್ಲದೇ, ಸರ್ಕಾರಿ ಕೆಲಸಕ್ಕೆ ಹಾಜರಾಗದೆ ದಿನಾಂಕ:10.05.2005 ರಿಂದ ಅನಧಿಕೃತವಾಗಿ ಗೈರು ಹಾಜರಾಗಿರುವುದು ತೀವ್ರತರನಾದ ದುರ್ವರ್ತನೆ ಆಗಿರುವುದರಿಂದ ಅವರ ವಿರುದ್ಧ ಮಾಡಲಾಗಿರುವ ಆರೋಪವು ಸಾಬೀತಾಗಿರುವ ಹಿನ್ನಲೆಯಲ್ಲಿ ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 8(viii) ರೊಂದಿಗೆ ಓದಿಕೊಂಡ ನಿಯಮ 9(3)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಜೀವ್ ಚಾವ್ಲಾ, ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು ಆದ ನಾನು ಶ್ರೀ ಹೆಚ್.ಪಿ. ತೀರ್ಥಪ್ರಸಾದ್, ಬಾಂದು ಜವಾನರು, ತಹಶೀಲ್ದಾರ್ ಕಛೇರಿ, ಮಡಿಕೇರಿ (ವರ್ಗಾವಣೆ ಆದೇಶ ತಹಶೀಲ್ದಾರ್, ಭಟ್ಕಳ ಕಛೇರಿ) ಇವರನ್ನು ಸೇವೆಯಿಂದ ವಜಾ ಮಾಡಿ ಆದೇಶಿಸಿದ್ದೇನೆ.

ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ
ಮತ್ತು ಭೂದಾಖಲೆಗಳು, ಬೆಂಗಳೂರು.

ಪಿ.ಆರ್.14

IN THE COURT OF 3RD ADDITIONAL CHIEF METROPALITAN MAGISTRATE, BANGALORE CITY, DATED:14TH AUGUST, 2008

It is here by notified for the information of the public that the under mentioned one hero Honda splender motor cycle and one Kawasaki bajaj motor cycle which is in the custody of Raj Rajeshwari Nagar Police Station, Bangalore City. Has unclaimed shall be confiscated to the Government and disposed as per law, if not claimed by the owner with proof of owner ship within 03 months from the date of the publication of this notification.

Sl. No.	Cimiss No.	P.F. No. & Date	Vehicle No	Nature of Property
1.	163/06	P.F. No.23/06 Date:08.09.2006	KA-04-EB-8823, Eng No.00F18M-09905 Chass No.00F20C-11945	M/C Hero Honda Splender
2.	166/06	P.F.No.24/06, Date:10.09.2006	KA-05-E-6910, Eng No.E30BH-001178, Chass No.C30BH-001288.	M/C Kawasaki bajaj.

By The Court Order
3rd Additional Chief Metropolitan Magistrate Court, Bangalore.

PR-447

POLICE DEPARTMENT

PROCEEDINGS OF THE COMMISSIONER OF POLICE BANGALORE CITY

Sub: Controlling of places of public entertainment.

Preamble:

Whereas representations have been received that certain places of public entertainment are open beyond midnight in certain parts of the city and giving scope for disorderly conduct, public nuisance and

isturbances of public tranquility. Whereas it is considered necessary to control the places of public ntertainment by fixing the hours during which they will remain open to prevent public nuisance, disorderly onduct in public places and disturbances of public peace. Therefore, the following order is hereby assed for preservation of public order.

Order No. MAG(2)/AM/1/2009-10, Dated:19th May, 2009

I. Shankar Bidari, Commissioner of Police, Bangalore City, in exercise of powers vested with me nder section 31, Sub Section W. of the Karnataka Police Act, 1963, hereby order that all the places of ublic entertainment as defined in Section 2 Sub Section 15 of the Karnataka Police Act, 1963 shall emain open from 0600 to 2400 hours only (i.e. from 6 A.M. to 12 midnight). all the places of public ntertainment shall remain closed from 0000 to 0600 hours everyday (i.e., from midnight to 6 A.M.)

2. If any person owning or having an interest and managing a place of public entertainment is esirous of keeping any particular place of public entertainment open during the period from 0000 to 600 hours or part thereof, he shall apply in writing to the undersigned duly stating the reasons why he ould like to keep open any particular place of public entertainment and the period during which he would e to keep the place of public entertainment open i.e., during the period from 0000 to 0600 hours or part ereof, and obtain written permission from the undersigned. If any place of public entertainment is kept pen during the period from 0000 to 0600 hours, he shall be liable for prosecution and penalty u/s 103 of e Karnataka Police Act, 1963.

3. This order will be applicable to all places of public entertainment situated in the limits of all olice Stations under the administrative control of the Commissionerate of Police, Bangalore City, gardless of the Revenue District or Taluk, in which they are situated.

4. This order will not apply to bar and restaurants, clubs and hotels serving Indian Made Foreign quor (CL9, CL4 and CL7 etc.,) and who have obtained licence from the Excise Department. These aces will continue to operate as per the provisions of the Karnataka Excise Act, Rules and licence onditions and shall close at 11.30 P.M.

5. This order will also be not be applicable to place of public entertainment situated within the emises of Bangalore International Airport, Railway Stations and KSRTC and BMTC Bus stations tuated within the limits of the Commissionerate of Police, Bangalore City.

6. this order will come into force from 20th May, 2009 and will remain in force until further orders.

7. This order is issued with the previous sanction of the Government of Karnataka.

Given under my signature and seal this day, the 19th May, 2009.

SHANKAR BIDARI

PR-453 Commissioner of Police, Bangalore City.

ಜಿಲ್ಲಾ ಅಧಿಕಾರಿಗಳ ಕಛೇರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,

ಹಾಸನ ಜಿಲ್ಲೆ, ಹಾಸನ

ಪತ್ರಿಕಾ ಪ್ರಕಟಣೆಗಾಗಿ

ಸಂಖ್ಯೆ:ಬಿಸಿಎಂ-4/ಕಾಪತ/ಸಿಆರ್-97/08-09, ದಿನಾಂಕ:19ನೇ ಮೇ, 2009

ವಿಷಯ: 2009-10ನೇ ಸಾಲಿಗೆ ಹಿಂದುಳಿದ ವರ್ಗಗಳ ವಿವಿಧ ಗುಂಪಿನ ಕಾನೂನು ಪದವೀಧರರಿಗೆ ನಾಲ್ಕು ವರ್ಷಗಳ ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರಿ ಆದೇಶ ಸಂಖ್ಯೆ:ಎಸ್‌ಡಬ್ಲ್ಯೂಎಲ್/68/ಎಸ್‌ಇಡಬ್ಲ್ಯೂ/89, ಬೆಂಗಳೂರು, ದಿನಾಂಕ:2.11.1990.

2) ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನರವರ ದಿನಾಂಕ:12.05.2009ರಂದು ನಡೆದ ಪ್ರಗತಿ ಪರಿಶೀಲನಾ ಸಭೆ ನಡವಳಿಗಳು.

ಉಲ್ಲೇಖ (1)ರ ಸರ್ಕಾರದ ಆದೇಶಾನುಸಾರ ಹಾಸನ ಜಿಲ್ಲೆಗೆ ಸೇರಿದ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ತ್ತು 3ಬಿ ವರ್ಗಕ್ಕೆ ಸೇರಿದ 10 ಕಾನೂನು ಪದವೀಧರರಿಗೆ ವಕೀಲ ವೃತ್ತಿಯಲ್ಲಿ ಮತ್ತು ನ್ಯಾಯಾಂಗ ಸೇವೆಯ ಪೂರ್ವ

ತರಬೇತಿ ಪಡೆಯಲು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಂತೆ ಇಚ್ಛೆಯುಳ್ಳ ಅರ್ಹ ಅಭ್ಯರ್ಥಿಗಳಿಂದ 2009-10ನೇ ಸಾಲಿಗೆ ಅರ್ಜಿ ಆಹ್ವಾನಿಸಲಾಗಿದೆ.

ನಿಬಂಧನೆಗಳು:

1) ಅಭ್ಯರ್ಥಿಗಳು ಸರ್ಕಾರದ ಆದೇಶದಲ್ಲಿನಂತೆ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ, 3ಬಿ ವರ್ಗಕ್ಕೆ ಸೇರಿದವರಾಗಿರಬೇಕು. ಈ ಬಗ್ಗೆ ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ತಹಸೀಲ್ದಾರ್‌ರವರಿಂದ ಜಾತಿ ಆದಾಯ ಪರಿಶೀಲನಾ ಪತ್ರವನ್ನು ಭರ್ತಿ ಮಾಡಿದ ಅರ್ಜಿಗಳೊಂದಿಗೆ ಕಳುಹಿಸಿಕೊಡಬೇಕು. ಪ್ರವರ್ಗ-1ರ ಅಭ್ಯರ್ಥಿಗಳಿಗೆ ಆದಾಯಮಿತಿ ಇರುವುದಿಲ್ಲ. ಉಳಿದ ಪ್ರವರ್ಗಗಳವರಿಗೆ ಆದಾಯ ರೂ.15,000/-ಗಳ ಒಳಗೆ ಇರಬೇಕು.

2) ತರಬೇತಿಗೆ ಆಯ್ಕೆ ಮಾಡುವ ಅಭ್ಯರ್ಥಿಗಳ ಸಂಖ್ಯೆ-10 ಮಾತ್ರ ಆಯ್ಕೆ ಮಾಡಬೇಕಾದ ಅಭ್ಯರ್ಥಿಗಳ ವರ್ಗವಾರು ವಿವರ ಪ್ರವರ್ಗ-1 ಶೇ.15, 2ಎ-ಶೇ.58, 3ಎ ಶೇ.15 ಮತ್ತು ಪ್ರವರ್ಗ-3ಬಿ ಶೇ.17ರ ಅನುಪಾತದಲ್ಲಿ ಆಯ್ಕೆ ಮಾಡಲಾಗುವುದು.

3) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ 30 ವರ್ಷಗಳ ವಯೋಮಿತಿಯಲ್ಲಿರಬೇಕು. ಪ್ರವರ್ಗ-1ರ ಅಭ್ಯರ್ಥಿಗಳಿಗೆ ಗರಿಷ್ಠ 31 ವರ್ಷ ಮೀರಿರಬಾರದು.

4) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಎರಡು ವರ್ಷದೊಳಗೆ ತೇರ್ಗಡೆಯಾದ ಕಾನೂನು ಪದವೀಧರರು ಮಾತ್ರ ಈ ತರಬೇತಿಗೆ ಅರ್ಹರಿರುತ್ತಾರೆ. ಅವಶ್ಯ ಮಾಹಿತಿಗಳಾದ ಕಾನೂನು ಪದವಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಪ್ರಮಾಣ ಪತ್ರ, ಅಂಕಪಟ್ಟಿಗಳ ದೃಢೀಕರಣ ಪತ್ರ, ಜನ್ಮ ದಿನಾಂಕ ದೃಢೀಕರಿಸಲು ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ಟಿ.ಸಿ. ದೃಢೀಕರಣ ಪ್ರತಿಯನ್ನು ಅರ್ಜಿಗಳೊಂದಿಗೆ ಲಗತ್ತಿಸಬೇಕು.

5) ಆಯ್ಕೆಯಾದ ಅಭ್ಯರ್ಥಿಗಳಿಗೆ ನಾಲ್ಕು ವರ್ಷ ತರಬೇತಿ ನೀಡಲಾಗುವುದು. ಮತ್ತು ಮಾಹೆಯಾನ ರೂ.1000/- (ಒಂದು ಸಾವಿರ ರೂಪಾಯಿ ಮಾತ್ರ) ತರಬೇತಿ ಭತ್ಯೆ ನೀಡಲಾಗುವುದು. ತರಬೇತಿಯ ಮಧ್ಯಂತರದಲ್ಲಿ ಬಿಟ್ಟುಹೋಗಬಾರದು. ಆದರೆ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದಲ್ಲಿ ಉದ್ಯೋಗ ದೊರೆತು, ಮಧ್ಯಂತರ ಅವಧಿಯಲ್ಲಿ ಬಿಟ್ಟುಹೋಗುವವರಿಗೆ ಈ ನಿಬಂಧನೆಗಳು ಅನ್ವಯಿಸುವುದಿಲ್ಲ.

6) ನಿಗದಿಪಡಿಸಿದ ದಿನಾಂಕದ ನಂತರ ಬಂದ ಅರ್ಜಿಗಳು ಅಪೂರ್ಣ ಹಾಗೂ ಅನರ್ಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

7) ಪರಿಪೂರ್ಣ ಮಾಹಿತಿಯೊಂದಿಗೆ ಸ್ವೀಕೃತವಾದ ಅರ್ಜಿಯ ಪರಿಶೀಲನೆ ನಂತರ ಆಯ್ಕೆ ಸಮಿತಿಯು ನಿರ್ದಿಷ್ಟಪಡಿಸಿದ ಸ್ಥಳ ಮತ್ತು ವೇಳೆಗೆ ಸಂದರ್ಶನಕ್ಕೆ ಕರೆಯಲಾಗುವುದು.

8) ಆಯ್ಕೆಯಾದ ಅಭ್ಯರ್ಥಿಗಳನ್ನು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್, ಸರ್ಕಾರಿ ವಕೀಲರು ಅಥವಾ ಕನಿಷ್ಠ 20 ವರ್ಷಗಳ ವಕೀಲ ವೃತ್ತಿ ಅನುಭವವುಳ್ಳ ವಕೀಲರ ಅಧೀನದಲ್ಲಿ ತರಬೇತಿಗೆ ನಿಯೋಜಿಸಲಾಗುವುದು.

9) ಜಿಲ್ಲಾಮಟ್ಟದ ಆಯ್ಕೆ ಸಮಿತಿಯ ಮುಖಾಂತರ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

10) ಆಯ್ಕೆಯಾದ ಅಭ್ಯರ್ಥಿಗಳಿಗೆ 15 ದಿನಗಳು ಕಾಲಾವಕಾಶ ನೀಡಿ, ಒಪ್ಪಿಗೆ ಸೂಚಿಸಲು ತಿಳಿಸಲಾಗುವುದು. ತರಬೇತಿ ಮಧ್ಯದಲ್ಲಿ ಬಿಟ್ಟು ಹೋಗದಿರುವ ಬಗ್ಗೆ ಕರಾರು ಪತ್ರ ಬರೆದು ಕೊಡತಕ್ಕದ್ದು.

11) ಆಯ್ಕೆಯಾದ ಅಭ್ಯರ್ಥಿಗಳು ನಿಗದಿಪಡಿಸಿದ ದಿನಾಂಕದೊಳಗೆ ಲಿಖಿತ ಒಪ್ಪಿಗೆ ಸೂಚಿಸದಿದ್ದಲ್ಲಿ, ಅಥವಾ ತರಬೇತಿಗೆ ಹಾಜರಾಗಲು ತಿರಸ್ಕರಿಸಿದಲ್ಲಿ, ಸದರಿ ಅಭ್ಯರ್ಥಿಯ ಆಯ್ಕೆಯನ್ನು ರದ್ದುಪಡಿಸಿ, ಕಾಯ್ದಿಟ್ಟ ಪಟ್ಟಿಯಿಂದ ಮತ್ತೊಬ್ಬ ಅರ್ಹ ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗುವುದು.

12) ಆಯ್ಕೆಯಾದ ಅಭ್ಯರ್ಥಿಯು ಸುಳ್ಳು ಮಾಹಿತಿ ನೀಡಿದಲ್ಲಿ ಅಥವಾ ತರಬೇತಿಯಿಂದ ಮಧ್ಯದಲ್ಲಿ ಬಿಟ್ಟುಹೋದಲ್ಲಿ, ಸರ್ಕಾರವು ಸದರಿ ಅಭ್ಯರ್ಥಿಯ ಮೇಲೆ ಖರ್ಚು ಮಾಡಲಾದ ಹಣವನ್ನು ವರ್ಷಕ್ಕೆ ಶೇ.10ರ ಬಡ್ಡಿಯೊಂದಿಗೆ ಭೂಕಂದಾಯ ಬಾಕಿ ಎಂದು ಪರಿಗಣಿಸಿ, ವಸೂಲಿ ಮಾಡಲಾಗುವುದು. ಹಾಗೂ ಶಿಕ್ಷೆಗೆ ಗುರಿಪಡಿಸಲಾಗುವುದು.

13) ಅಭ್ಯರ್ಥಿಯು ಬಾರ್‌ಕೌನ್ಸಿಲ್‌ನಲ್ಲಿ ತಮ್ಮ ಹೆಸರನ್ನು ನೊಂದಾಯಿಸಿರಬೇಕು ಮತ್ತು ಈ ಬಗ್ಗೆ ದಾಖಲೆ ಒದಗಿಸಬೇಕು.

14) ಭರ್ತಿ ಮಾಡಿದ ಅರ್ಜಿಗಳನ್ನು ಸದಸ್ಯ ಕಾರ್ಯದರ್ಶಿಗಳು, ಕಾನೂನು ಪದವೀಧರರ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಮತ್ತು ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹೆಚ್.ಕೆ.ಬಿ. ವಾಣಿಜ್ಯ ಸಂಕೀರ್ಣ, 2ನೇ ಮಹಡಿ, 23ನೇ ಅಡ್ಡರಸ್ತೆ, ಕುವೆಂಪುನಗರ, ಹಾಸನ ಇವರಿಗೆ ದಿನಾಂಕ:30.06.2009 ರಂದು ಅಪರಾಹ್ನ 5.30 ಗಂಟೆ ಒಳಗೆ ಸಲ್ಲಿಸತಕ್ಕದ್ದು. ಅವಧಿ ಮೀರಿ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

15) ಅರ್ಜಿ ನಮೂನೆಗಳನ್ನು ಈ ಕಛೇರಿಯಲ್ಲಿ ಕಛೇರಿ ವೇಳೆಯಲ್ಲಿ ಉಚಿತವಾಗಿ ಪಡೆಯಬಹುದಾಗಿದೆ.

ಜಿಲ್ಲಾ ಅಧಿಕಾರಿ ಹಿಂದುಳಿದ ವರ್ಗಗಳ ಮತ್ತು
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ.

ಪಿ.ಆರ್.446

ಸಹಕಾರ ಇಲಾಖೆ

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೆಂಗಳೂರು 1ನೇ ವೃತ್ತ, ಮಾರ್ಗೋಸ ರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇವರ ನಡವಳಿಕೆಗಳು

ವಿಷಯ: ದಿ ಮಲ್ಲೇಶ್ವರಂ ಕೋ-ಆಪರೇಟಿವ್ ಬ್ಯಾಂಕ್ ಲಿ., ಮಲ್ಲೇಶ್ವರಂ, ಬೆಂಗಳೂರು ಇವರ ಅಮಲ್ಜಾರಿ ಅರ್ಜಿ ಸಂಖ್ಯೆ:ಜೆಆರ್‌ಡಿ/ಯುಬಿಎಫ್/1462/05-06 (ಸಿಇಪಿ ಸಂಖ್ಯೆ: ಎಆರ್ 44/40/08-09) ಸಂಬಂಧಪಟ್ಟಂತೆ ಸ್ಥಿರಾಸ್ತಿಯನ್ನು 1960ನೇ ಸಹಕಾರ ಸಂಘಗಳ ನಿಯಮಗಳ ನಿಯಮ 38(5) (ಎ) ರನ್ವಯ ಮಾರಾಟ ಸ್ಥಿರೀಕರಣಗೊಳಿಸುವ ಬಗ್ಗೆ.

ಉಲ್ಲೇಖ: 1) ದಾವಾ ಸಂಖ್ಯೆ: ಜೆಆರ್‌ಡಿ/ಯುಬಿಎಫ್/1462/05-06.

2) ಅಮಲ್ಜಾರಿ ಅರ್ಜಿ ಸಂಖ್ಯೆ: 40/08-09.

3) ಮಾರಾಟಾಧಿಕಾರಿಯವರ ವರದಿ ದಿನಾಂಕ:10.02.2009.

ಪ್ರಸ್ತಾವನೆ:

ಶ್ರೀ ಎಂ.ವಿ.ವಿ. ಗುಪ್ತ ಬಿನ್ ಲೇಟ್ ಎಂ.ಎನ್. ವೆಂಕಟರಾಮಯ್ಯ, ನಂ.1660, 17ನೇ 'ಎ' ಮುಖ್ಯರಸ್ತೆ, 1ನೇ ಹಂತ, 5ನೇ ಬ್ಲಾಕ್, ಹೆಚ್.ಬಿ.ಆರ್. ಲೇಔಟ್, ಬೆಂಗಳೂರು-560 043 ಇವರು ದಿ ಮಲ್ಲೇಶ್ವರಂ ಕೋ-ಆಪರೇಟಿವ್ ಬ್ಯಾಂಕ್ ಲಿ., ಮಲ್ಲೇಶ್ವರಂ, ಬೆಂಗಳೂರು ಈ ಬ್ಯಾಂಕಿನಿಂದ ದಿನಾಂಕ:01.02.2003ರಂದು ರೂ.25,00,000/- (ರೂಪಾಯಿ ಇಪ್ಪತ್ತೈದು ಲಕ್ಷಗಳು ಮಾತ್ರ) ಗಳನ್ನು ಸ್ಥಿರಾಸ್ತಿ ಅಡಮಾನ ಮಾಡಿ ಸಾಲವಾಗಿ ಪಡೆದು ಬ್ಯಾಂಕಿನ ಸಾಲ ಮಂಜೂರಾತಿಯ ಷರತ್ತು ಮತ್ತು ನಿಯಮಗಳ ಪ್ರಕಾರ ಸಾಲವನ್ನು ಮರುಪಾವತಿಸಲು ವಿಫಲರಾಗಿ ಸುಸ್ತಿದಾರರಾದ ಕಾರಣ ಸಾಲ ವಸೂಲಾತಿಗಾಗಿ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 70ರನ್ವಯ ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು, (ನಿ-441) ದಾವಾ ಪಂಚಾಯ್ತಿ ನ್ಯಾಯಾಲಯ, ಕ.ರಾ.ಸ.ಪ. ಬ್ಯಾಂಕುಗಳ ಮಹಾಮಂಡಳ ನಿ., ಬೆಂಗಳೂರು ಇವರ ನ್ಯಾಯಾಲಯದಲ್ಲಿ ದಾವಾ ಸಂಖ್ಯೆ: ಜೆಆರ್‌ಡಿ/ ಯುಬಿಎಫ್/1462/05-06 ರಂತೆ ದಾವಾ ಹೂಡಿ ಆದೇಶ ಪಡೆದಿದ್ದರೂ ಸಾಲದ ಬಾಕಿ ವಸೂಲಾತಿಯಾಗಿರುವುದಿಲ್ಲ.

ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು, (ನಿ-441) ದಾವಾ ಪಂಚಾಯ್ತಿ ನ್ಯಾಯಾಲಯ, ಕ.ರಾ.ಸ.ಪ. ಬ್ಯಾಂ.ಮ ನಿಯಮಿತ, ಬೆಂಗಳೂರು ಇವರ ನ್ಯಾಯಾಲಯದಿಂದ ಪಡೆದ ಡಿಕ್ರಿ ಆದೇಶದನ್ವಯ ದಿ ಮಲ್ಲೇಶ್ವರಂ ಸಹಕಾರ ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕರು, ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 34(1) ರನ್ವಯ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಹಾಗೂ ವಸೂಲಾಧಿಕಾರಿಗಳು, 1ನೇ ವಲಯ, ಮಲ್ಲೇಶ್ವರಂ, ಬೆಂಗಳೂರು-03 ಇವರ ಕಛೇರಿಯಲ್ಲಿ ಸಿಇಪಿ ಸಂಖ್ಯೆ: 40/08-09 ರಂತೆ ಅಮಲ್ಜಾರಿ ಅರ್ಜಿ ದಾಖಲು ಮಾಡಲಾಗಿತ್ತು. ಸದರಿ ಅಮಲ್ಜಾರಿ ಅರ್ಜಿಯನ್ನು ಬ್ಯಾಂಕಿನ ಮಾರಾಟಾಧಿಕಾರಿಯವರಿಗೆ ವಹಿಸಲಾಗಿತ್ತು. ಸದರಿ ಮಾರಾಟಾಧಿಕಾರಿಯವರು ಅಂತಿಮವಾಗಿ ಅಮಲ್ಜಾರಿ ಕ್ರಮಕೈಗೊಂಡು ಸಾಲಕ್ಕೆ ಬ್ಯಾಂಕಿನ ಆಧಾರ ಮಾಡಿದ್ದ ಈ ಕೆಳಗೆ ಕಾಣಿಸಿದ ಸ್ಥಿರಾಸ್ತಿಯನ್ನು ದಿನಾಂಕ:10.02.2009 ರಂದು ಸಾರ್ವಜನಿಕ ಹರಾಜಿಗೆ ತರಲಾಗಿತ್ತು. ಸದರಿ ದಿನ ನಡೆಸಿದ ಹರಾಜಿನಲ್ಲಿ 6 ಜನ ಬಿಡ್ಡುದಾರರು ಭಾಗವಹಿಸಿದ್ದು, ಈ ಪೈಕಿ ಶ್ರೀ ಹರೀಶ್ ಷರಾಫ್ ಬಿನ್ ಲೇಟ್ ಮೂಲ್‌ಚಂದ್ ಚುಗ್ ಷರಾಫ್, ನಂ.282, ಹಳೇ ನಂ.65, ನಾರಾಯಣ ಪಿಳ್ಳೈ ಬೀದಿ, ಸಿವಿಲ್ ಸ್ಟೇಷನ್, ಬೆಂಗಳೂರು-01 ಇವರು ರೂ.56,00,000/- (ರೂಪಾಯಿ ಐವತ್ತಾರು ಲಕ್ಷಗಳು ಮಾತ್ರ)ಗಳಿಗೆ ಬಿಡ್ಡು ಮಾಡಿದ್ದು, ಅತೀ ಹೆಚ್ಚು ಬಿಡ್ಡುದಾರರಾಗಿರುತ್ತಾರೆ.

ಡಿಕ್ರಿ ಆದೇಶ ಮತ್ತು ಅಮಲ್ಜಾರಿ ಅರ್ಜಿಯನ್ವಯ ಅಸಲು ರೂ.24,78,293/-ಗಳು ಬಡ್ಡಿ ಮತ್ತು ಇತರೆ ವೆಚ್ಚಗಳು ರೂ.20,92,953/- ಒಟ್ಟು ರೂ.45,71,246/-ಗಳು ಬ್ಯಾಂಕಿಗೆ ಬರಬೇಕಾಗಿರುತ್ತದೆ. ರೂ.56,00,000/-ಗಳ ಅತೀ ಹೆಚ್ಚಿನ ಬಿಡ್ಡುದಾರರಾದ ಶ್ರೀ ಹರೀಶ್ ಷರಾಫ್‌ರವರು ಬಿಡ್ಡಿನ ಮೊತ್ತದ ಶೇಕಡಾ 15ರಷ್ಟು ರೂ.8,40,000/- ಗಳನ್ನು ಹರಾಜಿನ ಸ್ಥಳದಲ್ಲಿಯೇ ಬ್ಯಾಂಕಿಗೆ ಪಾವತಿ ಮಾಡಿರುತ್ತಾರೆ. ಉಳಿಕೆ ಮೊತ್ತದಲ್ಲಿ ರೂ.47,60,000/-ಗಳನ್ನು ದಿನಾಂಕ:28.03.2009 ರಂದು ಪಾವತಿ ಮಾಡಿರುತ್ತಾರೆ.

ದಿ ಮಲ್ಲೇಶ್ವರಂ ಸಹಕಾರ ಬ್ಯಾಂಕಿನ ಮಾರಾಟಾಧಿಕಾರಿಯವರು ದಿನಾಂಕ:10.02.2009 ರಂದು ನಡೆಸಿದ ಸಾರ್ವಜನಿಕ ಹರಾಜನ್ನು ಕರ್ನಾಟಕ ಸಹಕಾರ ಸಂಘಗಳ ಕಾನೂನು ಮತ್ತು ನಿಯಮಗಳನ್ನು ಪಾಲಿಸಿ ಹರಾಜು ಕ್ರಮವನ್ನು ನಡೆಸಿರುವುದಾಗಿ ಹಾಗೂ ಬ್ಯಾಂಕಿನ ಬಾಕಿದಾರರಾದ ಶ್ರೀ ಎಂ.ವಿ.ವಿ. ಗುಪ್ತ ಬಿನ್ ಲೇಟ್ ಎಂ.ಎನ್. ವೆಂಕಟರಾಮಯ್ಯ ರವರ ಸ್ಥಿರಾಸ್ತಿಯನ್ನು ಶ್ರೀ ಹರೀಶ್ ಷರಾಫ್ ಬಿನ್ ಲೇಟ್ ಮೂಲ್‌ಚಂದ್ ಚುಗ್ ಷರಾಫ್ ರವರಿಗೆ ಮಾರಾಟ ಮಾಡಿರುವ ಆಸ್ತಿಯ ಹರಾಜನ್ನು ಖಾಯಂಗೊಳಿಸಬೇಕೆಂದು ಉಲ್ಲೇಖ (3)ರಂತೆ ಈ ಕಛೇರಿಗೆ ಸವಿಸ್ತಾರವಾದ ವರದಿಯನ್ನು ಸಲ್ಲಿಸಿರುತ್ತಾರೆ.

ದಿನಾಂಕ:10.02.2009ರಂದು ನಡೆಸಿದ ಸ್ಥಿರಾಸ್ತಿ ಬಹಿರಂಗ ಹರಾಜಿನ ನಡವಳಿಕೆಯನ್ನು ಪರಿಶೀಲಿಸಿದಾಗ ಸದರಿ ಸ್ಥಿರಾಸ್ತಿ ಬಹಿರಂಗ ಹರಾಜಿನಲ್ಲಿ ಒಟ್ಟು 6 ಜನ ಬಿಡ್ಡುದಾರರು ಭಾಗವಹಿಸಿದ್ದು ಈ ಪೈಕಿ ಅತ್ಯಧಿಕ ಬಿಡ್ಡುದಾರರಾದ ಶ್ರೀ ಹರೀಶ್ ಷರಾಫ್ ಬಿನ್ ಲೇಟ್ ಮೂಲ್‌ಚಂದ್ ಚುಗ್ ಷರಾಫ್ ಇವರಿಗೆ ರೂ.56,00,000/- ಗಳಿಗೆ ಮಾರಾಟ ಮಾಡಿರುವುದು

ದಾಖಲೆಗಳಿಂದ ತಿಳಿದುಬಂದಿರುತ್ತದೆ. ಬಹಿರಂಗ ಹರಾಜು ನಡೆದ 30 ದಿನಗಳೊಳಗೆ ಬಾಕಿದಾರರು ವಾದಿ ಬ್ಯಾಂಕಿಗೆ ಬರಬೇಕಾದ ಸಾಲವನ್ನು ಮರುಪಾವತಿ ಮಾಡದಿರುವುದರಿಂದ ಮತ್ತು ಈ ಬಗ್ಗೆ ಯಾವುದೇ ಆಕ್ಷೇಪಣೆ ಸಲ್ಲಿಸದೇ ಇರುವುದರಿಂದ ದಿನಾಂಕ:10.02.2009ರಂದು ನಡೆಸಲಾದ ಸ್ಥಿರಾಸ್ತಿ ಹರಾಜನ್ನು ಖಾಯಂಗೊಳಿಸಬಹುದೆಂದು ಮಾರಾಟಾಧಿಕಾರಿಯವರು ಸಲ್ಲಿಸಿದ ವರದಿಯನ್ನು ಪರಿಶೀಲಿಸಿ ಮಾರಾಟಾಧಿಕಾರಿಯವರು ಕೈಗೊಂಡ ಕ್ರಮಗಳು ಕಾನೂನುಬದ್ಧವಾಗಿದೆ ಎಂದು ಕಂಡುಬಂದಿರುವುದರಿಂದ ಈ ಕೆಳಗಿನ ಸ್ಥಿರೀಕರಣ ಆದೇಶ ಹೊರಡಿಸಲಾಗಿದೆ.

ಆದೇಶ

ಸಂಖ್ಯೆ: ಎಆರ್‌ಬಿ44/ಮಾ.ಸ್ಥಿರೀಕರಣ/01, 2009-10, ದಿನಾಂಕ:29ನೇ ಏಪ್ರಿಲ್, 2009

ಶ್ರೀ ಅಶ್ವಥನಾರಾಯಣ, ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೆಂಗಳೂರು 1ನೇ ವೃತ್ತ, ಮಾರ್ಗೋಸಾ ರಸ್ತೆ, ಮಲ್ಲೇಶ್ವರಂ, ಬೆಂಗಳೂರು ಆದ ನಾನು ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ನಿಯಮ 38(6)(ಎ)ರನ್ವಯ ದತ್ತವಾಗಿರುವ ಅಧಿಕಾರವನ್ನು ಉಪಯೋಗಿಸಿ ಅಮಲ್ಜಾರಿ ಅರ್ಜಿ ಸಂಖ್ಯೆ: 40/08-09 ಶ್ರೀ ಎಂ.ವಿ.ವಿ. ಗುಪ್ತ ಬಿನ್ ಲೇಟ್ ಎಂ.ಎನ್. ವೆಂಕಟರಾಮಯ್ಯ ಇವರಿಗೆ ಸೇರಿದ ಸ್ಥಿರಾಸ್ತಿಯನ್ನು ದಿನಾಂಕ:10.02.2009 ರಂದು ವಾದಿ ಬ್ಯಾಂಕಿನ ಮಾರಾಟಾಧಿಕಾರಿಯವರು ಮಾಡಿದ ಬಹಿರಂಗ ಹರಾಜಿನಲ್ಲಿ ಶ್ರೀ ಹರೀಶ್ ಷರಾಫ್ ಬಿನ್ ಲೇಟ್ ಮೂಲ್‌ಚಂದ್ ಚುಗ್ ಷರಾಫ್ ಮತ್ತು ಶ್ರೀ ರೂಪೇಶ್ ಷರಾಫ್ ಬಿನ್ ಲೇಟ್ ಮೂಲಚಂದ್ ಚುಗ್ ಷರಾಫ್, ನಂ.282, ಹಳೇ ನಂ.65, ನಾರಾಯಣ ಪಿಳ್ಳೈ ಬೀದಿ, ಸಿವಿಲ್ ಸ್ಟೇಷನ್, ಬೆಂಗಳೂರು ಇವರು ಅತೀ ಹೆಚ್ಚಿನ ಬಿಡ್ಡುದಾರರಾಗಿದ್ದು, ಇವರಿಗೆ ರೂ.56,00,000/-ಗಳಿಗೆ ಈ ಕೆಳಗೆ ವಿವರಿಸಿದ ಸ್ಥಿರಾಸ್ತಿಯನ್ನು ಬಹಿರಂಗವಾಗಿ ಹರಾಜು ಮೂಲಕ ಮಾರಾಟ ಮಾಡಿರುವುದನ್ನು ಖಾಯಂಗೊಳಿಸಿ ಸ್ಥಿರೀಕರಿಸಿರುತ್ತೇನೆ.

ಸ್ಥಿರಾಸ್ತಿಯ ವಿವರ

ಬೆಂಗಳೂರು ಮಹಾನಗರ ಪಾಲಿಕೆ, ಶಿವಾಜಿನಗರ ವಲಯ, 79ನೇ ವಾರ್ಡ್‌ಗೆ ಸೇರಿದ ಬೆಂಗಳೂರು ಸಿಟಿ, ಮನೆ ನಂ.282, ಹಳೇ ನಂ.65, ನಾರಾಯಣ ಪಿಳ್ಳೈ ಬೀದಿ, ಸಿವಿಲ್ ಸ್ಟೇಷನ್, ಬೆಂಗಳೂರು-01 ರಲ್ಲಿರುವ ಪೂರ್ವಕ್ಕೆ:19.9 ಅಡಿಗಳು, ಪಶ್ಚಿಮಕ್ಕೆ:21 ಅಡಿಗಳು, ಉತ್ತರಕ್ಕೆ: 42.9 ಅಡಿಗಳು ದಕ್ಷಿಣಕ್ಕೆ: 43 ಅಡಿಗಳು ಇದರ ಚಕ್ಕುಬಂದಿ:

ಪೂರ್ವಕ್ಕೆ: ಶ್ರೀ ಮೇಡ ರಾಮಚಂದ್ರಶೆಟ್ಟಿರವರ ಸ್ವತ್ತು
ಪಶ್ಚಿಮಕ್ಕೆ: ನಾರಾಯಣ ಪಿಳ್ಳೈ ಬೀದಿ
ಉತ್ತರಕ್ಕೆ: ಕಾರ್ಪೋರೇಷನ್ ಲೇನ್
ದಕ್ಷಿಣಕ್ಕೆ: ಶ್ರೀ ಎಂ.ಎಸ್. ಕೃಷ್ಣಮೂರ್ತಿಯವರ ಸ್ವತ್ತು
ಮಾರಾಟದ ಮೊಬಲಗು: ರೂ.56,00,000/-
ಮಾರಾಟ ಮಾಡಿದ ದಿನಾಂಕ:10.02.2009

ಈ ಆದೇಶವನ್ನು ನನ್ನ ಸಹಿ ಹಾಗೂ ಕಛೇರಿಯ ಮುದ್ರೆಯೊಂದಿಗೆ ದಿನಾಂಕ:29.04.2009 ರಂದು ನೀಡಲಾಗಿದೆ.

ಸಹಕಾರ ಸಂಘಗಳ ಸಹಾಯಕ ನಿಬಂಧಕರು,
ಬೆಂಗಳೂರು 1ನೇ ವೃತ್ತ, ಮಾರ್ಗೋಸಾ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-560003.

ಪಿ.ಡಿ.29

KARNATAKA ELECTRICITY REGULATORY COMMISSION 6TH & 7TH FLOORS, MAHALAKSHMI CHAMBERS, NO.9/2, M.G. ROAD, BANGALORE-560001

Notification No.D/07/9, Dated:13th May, 2009

Amendment to Karnataka Electricity Regulatory Commission (State Advisory Committee) Regulations, 2004

WHEREAS the draft of the amendment to Karnataka Electricity Regulatory Commission (State Advisory Committee) (Amendment) Regulations, 2004, was published on 5th March 2009 calling for comments/ suggestions from interested persons on or before 31st March 2009, as required by sub-section (3) of section 181 of the Electricity Act, 2003 (central Act 36 of 2003). The draft amendment was also made available on the commission's website www.kerc.org.

WHEREAS no comments or suggestions were received by the commission before the stipulated date i.e. 31st March 2009.

THEREFORE In exercise of the powers conferred by section 181 of the Electricity Act, 2003, the Commission hereby make the following amendment to clause (2) of the Regulation 14 of the Karnataka Electricity Regulatory Commission (State Advisory Committee) Regulation 2004, namely:

1. Short title and commencement.- (1) These regulations may be called the Karnataka Electricity Regulatory Commission (State Advisory Committee) (Amendment) Regulations, 2009.

(2) They shall come into force from the date of publication in the official Gazette.

Amendment of regulation 14.- In Clause (2) of regulations 14 of the Karnataka Electricity Regulatory Commission (State Advisory Committee) Regulations, 2004 for the word and figures "Rs.500/--," the word and figures "Rs.1,000/-"-shall be substituted.

By Order of the Commission,

PD-28 Secretary.

ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು, ನಿಯಮ 441, ದಾವಾ ಪಂಚಾಯ್ತಿ ನ್ಯಾಯಾಲಯ, ಅಮಾನತ್ ಹೌಸ್, ಶಿವಾಜಿನಗರ, ಬೆಂಗಳೂರು

ದಾವಾ ನಂ.ಜೆ.ಆರ್.ಡಿ./ ಯು.ಬಿ.ಎಫ್./3560/06-07

ವಾದಿ	**ಪ್ರತಿವಾದಿ**
ಪ್ರಧಾನ ವ್ಯವಸ್ಥಾಪಕರು ಅಮಾನತ್ ಕೋ-ಆಪ್ ಬ್ಯಾಂಕ್ ನಿ., ನಂ.43, ಆಸ್ಪತ್ರೆ ರಸ್ತೆ, ಶಿವಾಜಿನಗರ, ಬೆಂಗಳೂರು-560001.	1. ಸಿಟಿ. ಟವರ್ಸ್, ರಿಯಲ್ ಎಸ್ಟೇಟ್ ಆ್ಯಂಡ್ ಪ್ರಾಪರ್ಟಿ ಡೆವಲಪರ್ಸ್, 1ನೇ ಮಹಡಿ, ಎಮರಾಲ್ಡ್ ಹೌಸ್, ಪ್ಲೇನ್ ಸ್ಟೀಟ್ ಆಫ್ ಇನ್‌ಫೆಂಟ್ರಿ ರಸ್ತೆ, ಬೆಂಗಳೂರು-01 **ಪ್ರತಿನಿಧಿಸುವವರು** 1) ಅಸ್ರಫ್ ಆಲಿ 2) ಸಾಜೀದ್ ವಾಹಿದ್ 2. ಫೈಸಲ್ ಮೊಹಮದ್, ನಂ.40, 5ನೇ ಮೈನ್, ಜಯಮಹಲ್ ಎಕ್ಸ್‌ಟೆನ್ಷನ್, ಬೆಂಗಳೂರು-46.

ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 103ರ ಅಡಿಯಲ್ಲಿ ಸ್ಥಿರಾಸ್ತಿಗಳ ಜಪ್ತಿ ಪೂರ್ವ ಆದೇಶ

ಮೇಲ್ಕಂಡ ದಾವೆಯನ್ನು ವಾದಿ ಬ್ಯಾಂಕ್ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 70ರ ಅಡಿಯಲ್ಲಿ ಪ್ರತಿವಾದಿಯಿಂದ ಬರಬೇಕಾಗಿರುವ ರೂ.3,85,00,000/-ಗಳನ್ನು ವಾರ್ಷಿಕ ಶೇಕಡಾ 14% ಬಡ್ಡಿ ಹಾಗೂ ಶೇಕಡಾ 2% ರಂತೆ ಸುಸ್ತಿ: ದಂಡದ ಬಡ್ಡಿಯೊಂದಿಗೆ ದಿನಾಂಕ:17.12.2004 ರಿಂದ ಪೂರ್ತ ವಸೂಲಿ ಮಾಡುವ ಸಲುವಾಗಿ ಹೂಡಿರುವ ವ್ಯಾಜ್ಯವಾಗಿರುತ್ತದೆ.

ವಾದಿ ಬ್ಯಾಂಕು ಕಲಂ 103ರ ಅಡಿ ಅರ್ಜಿಯನ್ನು ಸಲ್ಲಿಸಿ ಈ ದಾವೆಯಲ್ಲಿ ಪ್ರತಿವಾದಿಗಳ ವಿರುದ್ಧ ಹೊರಡಿಸಬಹುದಾದ ಯಾವುದೇ ನಿರ್ಣಯವನ್ನು/ ಆದೇಶವನ್ನು ಅಥವಾ ಅವಾರ್ಡನ್ನು ಸದರಿಯವರು ವಿಳಂಬಗೊಳಿಸುವ ಅಥವಾ ಅದರ ಜಾರಿಗೆ ಅಡ್ಡಿಯನ್ನುಂಟು ಮಾಡುವ ಉದ್ದೇಶದಿಂದ ಷೆಡ್ಯೂಲ್‌ನಲ್ಲಿ ನಮೂದಿಸಿರುವಂತೆ ಪ್ರತಿವಾದಿಗಳಿಗೆ ಸೇರಿದ ಸ್ಥಿರಾಸ್ತಿಯನ್ನು ವರ್ಗಾವಣೆ/ಪರಭಾರೆ ವಿಲೇವಾರಿ ಮಾಡಬಹುದೆಂದು ಮನವರಿಕೆ ಮಾಡಿದ್ದು ಸದರಿ ಅರ್ಜಿಯನ್ನು ಪ್ರತಿವಾದಿಗಳಿಗೆ ಜಾರಿಗೊಳಿಸಿದೆ.

ವಾದಿ ಬ್ಯಾಂಕು ಮುಂದುವರಿದು ಪ್ರತಿವಾದಿಗಳ ಮೇಲ್ಕಂಡ ಕ್ರಮವನ್ನು ತಡೆಗಟ್ಟದಿದ್ದಲ್ಲಿ ಅವರ ವಿರುದ್ಧ ವಾದಿ ಬ್ಯಾಂಕು ಅವಾರ್ಡ್; ಡಿಕ್ರಿ ಪಡೆದರೂ ಅದನ್ನು ಜಾರಿಗೊಳಿಸಿ ಹಣ ವಸೂಲಿ ಮಾಡಲು ಯಾವುದೇ ಪ್ರವ್ಯಾನುಕೂಲತೆ ಇಲ್ಲದಂತಾಗುತ್ತದೆ ಎಂದು ತಿಳಿಸಿರುತ್ತಾರೆ. ವಾದಿ ಬ್ಯಾಂಕು ಮತ್ತೊಂದು ಅಫಿಡವಿಟ್‌ನ್ನು ಸಲ್ಲಿಸಿ ಷೆಡ್ಯೂಲ್ ಆಸ್ತಿಗೆ ಸಂಬಂಧಿಸಿದಂತೆ ಯಾವುದೇ ವಿವಾದವು ಇರುವುದಿಲ್ಲವೆಂದು ತಿಳಿಸಿರುತ್ತಾರೆ, ಹಾಗೂ ಪ್ರತಿವಾದಿಗಳು ಪಡೆದಿರುವ ರೂ.3,85,00,000/- ಗಳ ಸಾಲಕ್ಕೆ ಸಂಬಂಧಿಸಿದಂತೆ ಪ್ರತಿವಾದಿಗೆ ಸೇರಿದ ನಿವೇಶನ ಸಂಖ್ಯೆ: 79(1) ಕೆ.ಜಿ. ಬ್ಯಾಡರಹಳ್ಳಿ, ಸರ್ವೆ ನಂ.79(1) ನಂದಿ ದುರ್ಗದ ರೋಡ್, ರಾಮಯ್ಯ ರೆಡ್ಡಿ ರೋಡ್, 2ನೇ ಕ್ರಾಸ್, ಬೆನ್‌ಸನ್ ಟೌನ್, ಬೆಂಗಳೂರು, ಹಾಗೂ ಕಮರ್ಷಿಯಲ್ ಸ್ಟ್ರೀಟ್‌ನಲ್ಲಿರುವ ಸಂಖ್ಯೆ.176 (ಬೇಸ್ಮೆಂಟ್) ಬೆಂಗಳೂರು, ಮತ್ತು ಬ್ರಿಗೇಡ್ ರಸ್ತೆಯಲ್ಲಿರುವ ಕಾಂಪೋಸಿಟ್ ಬಿಲ್ಡಿಂಗ್ ಇದರ ಮುನಿಸಿಪಲ್ ನಂ.45 ಆ್ಯಂಡ್ 46, ಈಸ್ಟರ್ನ್ ಪೋರ್ಷನ್ ಆಫ್ ದಿ ಗ್ರೌಂಡ್ ಫ್ಲೋರ್ ಆ್ಯಂಡ್ ಮೆಜಾನೈನ್ ಫ್ಲೋರ್ ಇದರಿಂದ ಬರುವ ಬಾಡಿಗೆಯನ್ನು

ಆದೇಶ ಪೂರ್ವ ಜಪ್ತಿ ಆದೇಶಕ್ಕೆ ಒಳಪಡಿಸಬೇಕೆಂದು ಕೋರಿರುತ್ತಾರೆ, ಮತ್ತು ವಾದಿ ಪರ ವಕೀಲರು ತಮ್ಮ ವಾದವನ್ನು ಮಂಡಿಸಿರುತ್ತಾರೆ.

ಪ್ರತಿವಾದಿ ಪರ ವಕೀಲರು ತಮ್ಮ ವಾದ ಮಂಡಿಸಿ, ವಾದಿಗಳು Primafacie ಕೇಸೆಂದು ಸಾಬೀತುಪಡಿಸಿರುವುದಿಲ್ಲ ದಾವಾ ಅರ್ಜಿಯಲ್ಲಿ ಸಾಲ ಮಂಜೂರಾತಿಗೆ ಸಂಬಂಧಿಸಿದಂತೆ ದಿನಾಂಕವನ್ನು 17.12.2004 ಎಂದೂ, ಸಾಲ ಮಂಜೂರಾತಿ ಆದೇಶದಲ್ಲಿ 24.12.2004 ಎಂದೂ ಮತ್ತು ಅಕೌಂಟ್ ಸ್ಟೇಟ್‌ಮೆಂಟ್‌ನಲ್ಲಿ 24.11.2004 ಎಂದು ವಿವಿಧ ದಿನಾಂಕಗಳನ್ನು ನಮೂದಿಸಿರುವುದು ಮತ್ತು ಸಾಲ ಮಂಜೂರಾತಿ ಪೂರ್ವದಲ್ಲೇ/ ಮೊದಲೇ ದಾಖಲೆಗಳನ್ನು ಪಡೆದಿರುವುದು, ಪಕ್ಷ ಸಮರ್ಥನೆ (Pleading) ಇಲ್ಲದೆ ಇರುವುದರಿಂದ ಈ ಪ್ರಕರಣ ಪ್ರೈಮಾಫಸಿ ಪ್ರಕರಣವಾಗಿರುವುದಿಲ್ಲ, ಕೇವಲ ಅಕೌಂಟ್ ಸ್ಟೇಟ್‌ಮೆಂಟ್ ಆಧಾರದ ಮೇಲೆ ಪ್ರತಿವಾದಿಗಳು ಸಾಲ ಪಡೆದಿರುತ್ತಾರೆ ಎಂಬ ಸಮರ್ಥನೆ ನ್ಯಾಯ ಸಮ್ಮತವಾದದ್ದಲ್ಲ ಎಂದು ತಿಳಿಸಿ ಉಚ್ಚ ನ್ಯಾಯಾಲಯದ ಮತ್ತು ಶ್ರೇಷ್ಠ ನ್ಯಾಯಾಲಯದ ತೀರ್ಪಿನ ಪ್ರತಿಗಳನ್ನು ಸಲ್ಲಿಸಿ ಪ್ರತಿವಾದಿಗಳ ಆಸ್ತಿಯನ್ನು ಮತ್ತು ಅದರ ಬಾಡಿಗೆಯನ್ನು attach ಮಾಡಬಾರದೆಂದು ತಮ್ಮ ವಾದ ಮಂಡಿಸಿದರು.

ಪ್ರತಿವಾದಿಗಳ ಷೆಡ್ಯೂಲ್ ಆಸ್ತಿಗಳು ವಿಲೇವಾರಿಯಾದಲ್ಲಿ, ಪ್ರತಿವಾದಿಗಳ ವಿರುದ್ಧ ಮಾಡಲ್ಪಡಬಹುದಾದ ಯಾವುದೇ ಆದೇಶ: ಡಿಕ್ರಿಯನ್ನು ನಿಷ್ಕ್ರಿಯಗೊಳಿಸಿದಂತೆ: ವಿಳಂಬಗೊಳಿಸಿದಂತಾಗುತ್ತದೆ ಎಂಬುದು ನನಗೆ ಪೂರ್ತಿಯಾಗಿ ಮನವರಿಕೆಯಾಗಿರುತ್ತದೆ. ಆದ್ದರಿಂದ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

ಆದೇಶ

ಮೇಲೆ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 103 ಹಾಗೂ ಸರ್ಕಾರದ ಅಧಿಸೂಚನೆ ನಂ. ಸಿ.ಎಂ.ಡಬ್ಲ್ಯೂ/123/ಸಿ.ಎಲ್.ಎಂ./2007, ಬೆಂಗಳೂರು, ದಿನಾಂಕ:14.09.2007ರಲ್ಲಿ ದತ್ತವಾಗಿರುವ ಅಧಿಕಾರವನ್ನು ಚಲಾಯಿಸುತ್ತಾ, ಎಸ್.ಆರ್. ದೇವಪ್ಪ, ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು, ನಿಯಮ 441, ದಾವಾ ಪಂಚಾಯಿತಿ ನ್ಯಾಯಾಲಯ, ಅಮಾನತ್ ಹೌಸ್, ಬೆಂಗಳೂರು ಆದ ನಾನು ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರತಿವಾದಿಗಳ ಸ್ಥಿರಾಸ್ತಿಗಳನ್ನು ಮತ್ತು ಸದರಿ ಸ್ಥಿರಾಸ್ತಿಗಳಿಂದ ಬರುವ ಬಾಡಿಗೆಯನ್ನು ಷರತ್ತಿಗೊಳಪಟ್ಟು ಜಪ್ತಿ ಮಾಡಿಕೊಳ್ಳಲು ಆದೇಶ ಪೂರ್ವ ಜಪ್ತಿ ಆದೇಶವನ್ನು ಈ ಮೂಲಕ ಹೊರಡಿಸಿರುತ್ತೇನೆ.

ಪ್ರತಿವಾದಿಗಳು ಮೇಲ್ಕಂಡ ಆದೇಶ ಪೂರ್ವ ಜಪ್ತಿ ಆದೇಶವನ್ನು ತೆರವು ಮಾಡಿಕೊಳ್ಳಲು ಇಚ್ಛಿಸಿದಲ್ಲಿ ಅರ್ಜಿದಾರರ ಬೇಡಿಕೆ ಮೊತ್ತಕ್ಕೆ ಸರಿಸಮವಾಗಿ ಸೂಕ್ತ ಭದ್ರತೆಯನ್ನು ಈ ನ್ಯಾಯಾಲಯಕ್ಕೆ ಒಪ್ಪಿಗೆಯಾಗುವಂತೆ ಅಥವಾ ದಾವಾ ಮೊತ್ತ ರೂ.3,85,00,000/-ಗಳನ್ನು ಸಹಕಾರ ಸಂಘಗಳ ಜಂಟಿ ನಿಬಂಧಕರು, ನಿಯಮ 441, ದಾವಾ ಪಂಚಾಯಿತಿ ನ್ಯಾಯಾಲಯ, ಅಮಾನತ್ ಹೌಸ್, ಬೆಂಗಳೂರು ಇವರ ಪಿ.ಡಿ. ಖಾತೆಗೆ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಕಲ್ಪತರು ಸೂಪರ್ ಬಜಾರ್, ಭಗವಾನ್ ಮಹಾವೀರ್ ರಸ್ತೆ, ಬೆಂಗಳೂರು ಇದರಲ್ಲಿ ದಿನಾಂಕ:31.05.2009ರೊಳಗೆ ಠೇವಣಿಸಿ ಮೂಲ ಚಲನ್‌ನನ್ನು ಈ ನ್ಯಾಯಾಲಯಕ್ಕೆ ಹಾಜರುಪಡಿಸುವುದು. ತಪ್ಪಿದಲ್ಲಿ ಈ ಬಗ್ಗೆ ನಿಮ್ಮ ಹೇಳಿಕೆ ಏನೂ ಇಲ್ಲವೆಂದು ಪರಿಗಣಿಸಿ, ಆದೇಶ ಮುನ್ನಾ ಜಪ್ತಿ ಆದೇಶವನ್ನು ಸ್ಥಿರೀಕರಿಸಲಾಗುವುದು. ಷೆಡ್ಯೂಲ್‌ನಲ್ಲಿ ಸ್ಥಿರಾಸ್ತಿಗಳನ್ನು ಖರೀದಿಸುವವರು/ ಆಸ್ತಿಗಳನ್ನು ಹೊಂದುವವರು ಈ ಆದೇಶ ಪೂರ್ವ ಜಪ್ತಿ ಆದೇಶಕ್ಕೆ ಒಳಪಟ್ಟು ಮಾಡಿರುತ್ತಾರೆಂದು ತಿಳಿಯುವುದು.

SCHEDULE

I. 1) Property Schedule Description (SA No.797/09-10)

(LAND MARK) Site No.7, C M C Katha No.144/33/27, Sampigehalli Village, Yelahanka Hobli, BNTQ (Shedule A): Site No.7, C M C Katha No.144/33/27, Sampigehalli Village, Yelahanka Hobli, BNTQ.

Measuring Ew 50 Ft * Ns 30 Ft of Vacant Site (EAST) Private Property (WEST) 30 Ft road (SOUTH) Site No.8 (NORTH) Site No.6.

2) (LAND MARK) Site No.7, C M C Katha No.144/33/2/7, Sampigehalli Village, Yelahanka Hobli, BNTQ

(Schedule A): Site No.7, C M C Katha No.144/33/2/7, Sampigehalli Village, Yelahanka Hobli, BNTQ.

EW 50 ft * NS 30 ft of Vacant site (EAST) Private Property (WEST) 30 ft Road (SOUTH) Site No.8 (NORTH) Site No.6

3) (LAND MARK) Site No.7, Byatarayanapura CMC Katha No.144/33/2/7, Situated at Sampigehalli Village, Yelahanka Hobli, BNTQ (Schedule A): Site No.7, Byatarayanapura C M C Katha No.144/33/2/7, Situated at Sampigehalli Village, Yelahanka Hobli, BNTQ., Measuring EW 50 ft * NS 30 ft, (EAST) Private Property (WEST) 30 ft Road (SOUTH) Site No.8 (NORTH) Site No.6.

II. Property Schedule Description (SA No.796/09-10)

(LAND MARK) Site No.8, Byatarayanapura CMC Katha No.144/33/2/8, Situated at Sampigehalli Village, Yelahanka Hobli, BNTQ, (Schedule A): Site No.8, Byatarayanapura CMC Katha No.144/33/2/8, Situated at Sampigehalli Village, Yelahanka Hobli, BNTQ., Measuring EW 50ft * NS 30ft, (EAST) Private Property (WEST) 30 feet Road (SOUTH) site No.9 (NORTH) Site No.7.

III. Property of Syed Abdul Wahid

Details of Property: Properties Situated in: K.G. Byadarahalli having Site No. (79/1), Site No.79/1 in Sy No.79/1 situated at K.G. Byadarahalli, (Nandi Durga Road) Ramaiah Reddy Road, 2nd Cross, Benson Town, Bangalore, Measuring: 50x50,

Boundaries:

E-Road

W-Private Property

N- Private Property

S- Private Property

IV. Details of Property: Properties situated in: Brigade Road having Site No.(44 & 45, Unit No.107 to 112 & 112/1, Bangalore)

V. No Documents Registered during 01.04.2004 to 13.12.2007 Properties situated in: Commercial Street having Property No.176, Basement, Bangalore.

E- Private Property

W-Private Property

N- Private Property

S- Road Commercial Street

Measuring: E to W: 40ft

N to S: 60ft

VI. Property Schedule Description:

(LAND MARK) The Entire Western Portion of the Upper Ground Floor with Mezzanine Floor and First Floor Premises bearing No.176, and Sub No.176/2, Commercial Street, Bangalore (Schedule A): 2/3rd Undivided share in the land out of entire Property bearing No.176 and 176/1 Measuring all 3189 Sq Ft., The Entire Western Portion of the Upper Ground Floor with Mezzanine Floor and First Floor with the built up area of 3550 Sq Ft of Premises bearing No.176, and Sub No. 176/2, Commercial Street, Bangalore (EAST) Property No.117, Commercial Street (WEST) Property No.175, Commercial Street (SOUTH) Commercial Street (NORTH) Private Property.

ಈ ಆದೇಶವನ್ನು ನನ್ನ ಸ್ವ ಸಹಿ ಹಾಗೂ ನ್ಯಾಯಾಲಯದ ಮೊಹರಿನೊಂದಿಗೆ ದಿನಾಂಕ:28.04.2009 ರಂದು ಹೊರಡಿಸಿದೆ.

ಎಸ್.ಆರ್. ದೇವಪ್ಪ
ಸಹಕಾರ ಸಂಘಗಳ ಜಂಟಿ ನಿಬಂಧಕರು (ನಿಯಮ 441),
ದಾವಾ ಪಂಚಾಯಿತಿ ನ್ಯಾಯಾಲಯ, ಅಮಾನತ್ ಹೌಸ್,
ಶಿವಾಜಿನಗರ, ಬೆಂಗಳೂರು-560001.

ಪಿ.ಡಿ.30

UNIVERSITY OF AGRICULTURAL SCIENCES, BANGALORE

Administrative Office, GKVK, Bangalore-560 065

NOTIFICATION

No.AO/RSP/332nd Board/ Amendment-C & RR/ 09-2010, Dated:30th May, 2009

Sub: Amendment to the Cadre and Recruitment Regulations of Service Personnel of UAS, Bengaluru.

Ref: Minutes of the 332nd Board Meeting held on 14th May 2008, vide Item No.7 and Item No.9.

In exercise of the power conferred under Statute 32 of UAS, Bengaluru and in pursuance of the decision of the Board of Regents referred to above, the following amendments are made to the existing Cadre and Recruitment Regulations of UAS, Bengaluru as detailed below;

They shall come into force from the date of approval of the Board of Regents i.e. 14th May, 2009.

1. The following is added as Sl.No.7, after Sl.No.6 under General in the existing Cadre and Recruitment Regulations of the UAS, Bengaluru.

General-7

Written Test shall be conducted to all eligible candidates who apply for various posts of Service Personnel and T-Series under direct recruitment and then will be called for interview in the ratio 1:5 (5 candidates for each notified vacancy) based on the merit list to be prepared by giving 50 percent weightage for marks secured in the prescribed qualification and 50 percent for marks scored in the Written Test.

2. The column (5) and (6) existing under method of recruitments and qualifications for the Cadre of Laboratory Assistant at Sl.No.95 of the Cadre and Recruitment Regulations shall be amended as follows:

Sl.No.95, Laboratory Assistant

Existing		Amended	
Column -5: Method of Recruitment	**Coloum-6: Qualification**	**Column -5: Method of Recruitment**	**Coloum -6: Qualification**
1/3rd by promotion from among Attenders/ Technician and 1/3rd by Recruitment (Direct) from the Eligible (qualified) in service employees with the University and 1/3rd by direct recruitment. If there are no sufficient candidates from among employees of the University, the shortfall may be filled up by Direct Recruitment.	**For Promotion** Must be working in the University for not less than 5 years as Attenders/ Technicians with SSLC **For Direct Recruitment** Must have passed SSLC with 9 months training course offered by the Department of Agriculture/ 2 years service in the University as Field Assistant/ Laboratory Assistant.	1/3rd by promotion from among Attenders/ Technician and 1/6th by Recruitment (Direct) from the Eligible (qualified) in service employees within the University and 1/3rd by direct recruitment and 1/6th by promotion from among the in-service LV Drivers who have passed SSLC. If there are no sufficient candidates from among employees of the University, the shortfall may be filled up by Direct Recruitment.	**For Promotion** Must be working in the University for not less than 5 years as Attenders/ Technicians and Drivers (Light Vehicle) with SSLC **For Direct Recruitment** Must have passed SSLC with 9 months training course offered by the Department of Agriculture/ 2 years service in the University as Field Assistant/ Laboratory Assistant.

By Order

Administrative Officer.

PD-31

ಕರ್ನಾಟಕ ಲೋಕಸೇವಾ ಆಯೋಗದ ನಡವಳಿಗಳು, ಬೆಂಗಳೂರು

ವಿಷಯ: ಕರ್ನಾಟಕ ಲೋಕಸೇವಾ ಆಯೋಗದ ದಿನಾಂಕ: 08-06-2008ರಂದು ನಡೆಸಿದ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ದುರಾಚಾರ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಅಭ್ಯರ್ಥಿಗಳ ಬಗ್ಗೆ.

ಓದಲಾಗಿದೆ:

1. ಶ್ರೀ ಮುರುಘ ರಾಜೇಂದ್ರ ಸ್ವಾಮೀಜಿ ಬಿ.ಎಡ್. ಕಾಲೇಜು, ಗುಲ್ಬರ್ಗಾ, ಈ ಪರೀಕ್ಷಾ ಉಪ ಕೇಂದ್ರದಲ್ಲಿ ನಡೆಸಿದ ಪರೀಕ್ಷೆಯ ಬಗ್ಗೆ ಶ್ರೀ ಓ. ನಾರಾಯಣ, ಸಹಾಯಕ ಕಾರ್ಯದರ್ಶಿ, ಕ.ಲೋ.ಸೇ.ಆ. ಇವರು ನೀಡಿರುವ ಲಿಖಿತ ವರದಿ.
2. ಪ್ರಾಂಶುಪಾಲರು, ಶರಣ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಕಾಲೇಜು, ಗುಲ್ಬರ್ಗಾ, ಇವರು ದಿ:08-06-2008 ರಂದು ಸಲ್ಲಿಸಿರುವ ವರದಿ.
3. ಕೊಠಡಿ ಮೇಲ್ವಿಚಾರಕರು, ಆರ್.ಸಿ. ಕಾಲೇಜು, ಬೆಂಗಳೂರು, ಇವರು ಸಲ್ಲಿಸಿರುವ ವರದಿ.
4. ಮೇಲ್ವಿಚಾರಕರು, ಜೆ.ಎಸ್.ಎಸ್. ಹೈಸ್ಕೂಲ್, ಧಾರವಾಡ, ಇವರು ದಿ: 08-06-2008ರಂದು ಸಲ್ಲಿಸಿರುವ ವರದಿ.
5. ಮೇಲ್ವಿಚಾರಕರು, ನೂತನ ವಿದ್ಯಾಲಯ, ಕನ್ಯಾ ಪ್ರೌಢ ಶಾಲೆ, ಗುಲ್ಬರ್ಗಾ, ಇವರು ದಿ: 08-06-2008ರಂದು ಸಲ್ಲಿಸಿರುವ ವರದಿ.
6. ಡಿ.ಡಿ.ಪಿ.ಐ. ಗದಗ, ಇವರು ದಿನಾಂಕ:08-06-2008ರಂದು ವಿ.ಡಿ.ಎಸ್.ಟಿ.ಓ. ಬಾಲಕರ ಪದವಿ ಪೂರ್ವ ಕಾಲೇಜು, ಗದಗ, ಇಲ್ಲಿ ನಡೆಸಲಾದ ಪರೀಕ್ಷೆಯ ಬಗ್ಗೆ ನೀಡಿದ ವಿವರ.
7. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ, ಇವರು ದಿ: 08-06-2008 ರಂದು ಶ್ರೀಮತಿ. ಜಿ.ಎಂ. ಪ್ರೇಮಲೀಲಾ, ಇವರ ಕುರಿತಂತೆ ಸಲ್ಲಿಸಿರುವ ವರದಿ.
8. ಮೇಲ್ವಿಚಾರಕರು, ಎ.ಐ.ಟಿ. ಚಿಕ್ಕಮಗಳೂರು, ಇವರು ದಿ: 08-06-2008ರಂದು ಸಲ್ಲಿಸಿರುವ ವರದಿ.
9. ಈ ಕಛೇರಿಯ ಕಾರಣ ಕೇಳುವ ನೋಟೀಸು ಸಂಖ್ಯೆ: ಇ(2) 110-121/2008-09/ಪಿಎಸ್‌ಸಿ, ದಿ: 24-06-2008.
10. ಈ ಕಛೇರಿಯ ಕಾರಣ ಕೇಳುವ ನೋಟೀಸು ಸಂಖ್ಯೆ: ಇ(2) 132-134/2008-09/ಪಿಎಸ್‌ಸಿ, ದಿ: 02-07-2008.
11. ಈ ಕಛೇರಿಯ ಕಾರಣ ಕೇಳುವ ನೋಟೀಸು ಸಂಖ್ಯೆ: ಇ(2) 80/2008-09/ಪಿಎಸ್‌ಸಿ, ದಿ: 10-06-2008.
12. ಈ ಕಛೇರಿಯ ಕಾರಣ ಕೇಳುವ ನೋಟೀಸು ಸಂಖ್ಯೆ: ಇ(2) 93-94/2008-09/ಪಿಎಸ್‌ಸಿ, ದಿ: 20-06-2008.
13. ಈ ಕಛೇರಿಯ ಕಾರಣ ಕೇಳುವ ನೋಟೀಸು ಸಂಖ್ಯೆ: ಇ(2) 124/2008-09/ಪಿಎಸ್‌ಸಿ, ದಿ: 27-06-2008.
14. ಈ ಕಛೇರಿಯ ಕಾರಣ ಕೇಳುವ ನೋಟೀಸು ಸಂಖ್ಯೆ: ಇ(2) 95/2008-09/ಪಿಎಸ್‌ಸಿ, ದಿ: 20-06-2008.
15. ಈ ಕಛೇರಿಯ ಕಾರಣ ಕೇಳುವ ನೋಟೀಸು ಸಂಖ್ಯೆ: ಇ(2) 329/2008-09/ಪಿಎಸ್‌ಸಿ, ದಿ: 02-08-2008.
16. ಈ ಕಛೇರಿಯ ಕಾರಣ ಕೇಳುವ ನೋಟೀಸು ಸಂಖ್ಯೆ: ಇ(2) 86/2008-09/ಪಿಎಸ್‌ಸಿ, ದಿ: 17-06-2008.
17. ಈ ಕಛೇರಿಯ ಕಾರಣ ಕೇಳುವ ನೋಟೀಸು ಸಂಖ್ಯೆ: ಇ(2) 274/2008-09/ಪಿಎಸ್‌ಸಿ, ದಿ: 21-07-2008.
18. ಶ್ರೀ. ಸಂತೋಷ ಜಿ. ನಾಡಗಿರಿ ಇವರ ದಿ: 07-07-2008ರ ಸಮಜಾಯಿಷಿ.
19. ಶ್ರೀ. ವೀರಭದ್ರಪ್ಪ ಎಸ್. ಅಂಬಲಗಿ ಇವರ ದಿ: 01-07-2008ರ ಸಮಜಾಯಿಷಿ.
20. ಶ್ರೀ. ಚನ್ನಬಸಪ್ಪ ಎನ್. ಕೊಂಬಿನ ಇವರ ದಿ: 05-07-2008ರ ಸಮಜಾಯಿಷಿ.
21. ಶ್ರೀ. ಜಗದೇವರೆಡ್ಡಿ ಜೆ. ಅಂತರೆಡ್ಡಿ ಇವರ ದಿ: 03-06-2008ರ ಸಮಜಾಯಿಷಿ.
22. ಶ್ರೀ. ಸಂತೋಷ ಕುಮಾರ ಇವರ ದಿ: 18-07-2008ರ ಸಮಜಾಯಿಷಿ.
23. ಶ್ರೀ. ಮಹ್ಮದ್ ಮುಸ್ತಾಖ್ ಸೌದಾಗರ್ ಇವರ ದಿ: 07-07-2008ರ ಸಮಜಾಯಿಷಿ.
24. ಶ್ರೀ. ಯಲ್ಲಪ್ಪ ಲಕ್ಷ್ಮಣ್ ಶೇಖರಗೋಳ ಇವರ ದಿ: 28-06-2008ರ ಸಮಜಾಯಿಷಿ.
25. ಶ್ರೀ. ಜಗದೀಶ್ ಎಸ್. ತಳವಾರ ಇವರ ದಿ: 18-08-2008 ಮತ್ತು ದಿ: 28-06-2008ರ ಸಮಜಾಯಿಷಿ.
26. ಶ್ರೀ. ವಸಂತ ಕುಮಾರ್ ಹೆಚ್. ವೀರಾಪುರ ಇವರ ದಿ: 29-07-2008ರ ಸಮಜಾಯಿಷಿ.
27. ಶ್ರೀ. ಸಂಜೀವ ಕುಮಾರ್ ಆರ್. ಕಾಟ್ಕೆ ಇವರ ದಿ: 07-07-2008 ಮತ್ತು ದಿ: 13-08-2008ರ ಸಮಜಾಯಿಷಿ.
28. ಶ್ರೀಮತಿ. ಜಿ.ಎಂ. ಪ್ರೇಮಲೀಲಾ ಇವರ ದಿ: 29-06-2008ರ ಸಮಜಾಯಿಷಿ.
29. ಶ್ರೀ. ಸಾಜೀದ್ ಅಲಿ ಇವರ ದಿ: 19-08-2008ರ ಸಮಜಾಯಿಷಿ
30. ಶ್ರೀ. ಪ್ರಶಾಂತ ರಾಂಪುರೆ ಇವರ ದಿ: 04-07-2008ರ ಸಮಜಾಯಿಷಿ.
31. ದಿನಾಂಕ: 30-07-2008ರಂದು ಸ್ವೀಕೃತಗೊಂಡಿರುವ ಶ್ರೀ. ಪ್ರಭುಶಂಕರ ಟಿ.ಪಿ. ಇವರ ಸಮಜಾಯಿಷಿ.

ಪ್ರಸ್ತಾವನೆ:

ದಿನಾಂಕ: 08-06-2008ರಂದು ನಡೆದ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆ ಸಮಯದಲ್ಲಿ ಒಟ್ಟು 22 ದುರಾಚಾರ ಪ್ರಕರಣಗಳು ವರದಿಯಾಗಿದ್ದು, ಅವುಗಳ ವಿವರ ಈ ಕೆಳಗಿನಂತಿದೆ:

1. ಶ್ರೀ ಮುರುಘ ರಾಜೇಂದ್ರ ಸ್ವಾಮೀಜಿ ಬಿ.ಎಡ್. ಕಾಲೇಜು, ಗುಲ್ಬರ್ಗಾ, ಈ ಪರೀಕ್ಷಾ ಉಪ ಕೇಂದ್ರದಲ್ಲಿನ ಕೊಠಡಿ ಸಂಖ್ಯೆ; 8 ಮತ್ತು 9ರಲ್ಲಿನ ಕೆಲವು ಅಭ್ಯರ್ಥಿಗಳು ನಕಲು ಮಾಡಲು ಅನುಕೂಲ ಮಾಡುತ್ತಿರುವುದಾಗಿ ಹೇಳುತ್ತಾ ಪರೀಕ್ಷೆಯನ್ನು ಬೈಕಾಟ್ ಮಾಡುವುದಾಗಿ ವೀರಭದ್ರಪ್ಪ ಎಸ್. ಅಂಬಲಗಿ (ನೋಂ.ಸಂ. 239884), ಶೈಲೇಶ್ ಕುಮಾರ ಕೆ. ನ್ಯಾಮನ್ (ನೋಂ.ಸಂ. 239894), ವಿಜಯಕುಮಾರ್ (ನೋಂ.ಸಂ. 239922), ಚಿದಾನಂದ ಶಂಕರ ಪಾಟೀಲ್ (ನೋಂ.ಸಂ. 239881), ಸಜೀದ ಅಲಿ (ನೋಂ.ಸಂ. 239899), ಚನ್ನಬಸಪ್ಪ ಎಸ್. ಕೊಂಬಿನ (ನೋಂ.ಸಂ. 239898), ಶಿವಣ್ಣ (ನೋಂ.ಸಂ. 239900), ಸಂತೋಷ ಜಿ. ನಾಡಗಿರಿ (ನೋಂ.ಸಂ. 239896), ಸಿದ್ಧಪ್ಪ ಮಲ್ಲಪ್ಪ ಜಲಕಿ (ನೋಂ.ಸಂ. 239909), ಪ್ರಶಾಂತ ರಾಂಪುರೆ (ನೋಂ.ಸಂ. 239882), ಇವರುಗಳು 11:50ರ ವೇಳೆಗೆ ಅಂದರೆ ಪರೀಕ್ಷೆ ಮುಗಿಯಲು ಇನ್ನು ಹತ್ತು ನಿಮಿಷ ಇರುವಾಗಲೇ ಕೊಠಡಿಯಿಂದ OMR ಉತ್ತರ ಹಾಳೆಗಳನ್ನು ತೆಗೆದುಕೊಂಡು ಹೋಗಿರುವುದಾಗಿ ಓದಲಾದ 1ರ ವರದಿಯಲ್ಲಿ ತಿಳಿಸಲಾಗಿದೆ.

2. ಶ್ರೀ. ಸಂಜೀವ ಕುಮಾರ್ ಆರ್. ಕಾಟ್ಕೆ ನೋಂ.ಸಂ. 235130, ಇವರು ಪರೀಕ್ಷಾ ಸಂದರ್ಭದಲ್ಲಿ ಎರಡು ಮೊಬೈಲ್‌ಗಳನ್ನು ಹೊಂದಿದ್ದು, ಪರೀಕ್ಷೆ ಮುಗಿಯುವ ಮುನ್ನವೇ ಪ್ರಶ್ನೆ ಪತ್ರಿಕೆ ಮತ್ತು OMR ಉತ್ತರ ಹಾಳೆಯೊಂದಿಗೆ ಪರೀಕ್ಷಾ ಕೊಠಡಿಯಿಂದ ಓಡಿ ಹೋಗಿರುವುದಾಗಿ ಹಾಗೂ ಶ್ರೀ. ಮುಸ್ತಾಖ್ ಅಹಮದ್ ನೋಂ.ಸಂ. 235037 ಮತ್ತು ಸಂತೋಷ ಕುಮಾರ್ ನೋಂ.ಸಂ. 235084 ಪರೀಕ್ಷಾ ಸೂಚನೆಗಳನ್ನು ಹಾಗೂ ಕೇಂದ್ರ ಮೇಲ್ವಿಚಾರಕರು ನೀಡಿರುವ ಸೂಚನೆಗಳನ್ನು ಉಲ್ಲಂಘಿಸಿ ಪರೀಕ್ಷಾ ಸಮಯದಲ್ಲಿ ಮೊಬೈಲ್‌ಗಳನ್ನು ಹೊಂದಿರುವುದಾಗಿ ಮೇಲ್ವಿಚಾರಕರಾದ ಎಸ್.ಬಿ. ಕಲಾ ಮತ್ತು ವಾಣಿಜ್ಯ ಕಾಲೇಜು, ಗುಲ್ಬರ್ಗಾ ಇವರು ಓದಲಾದ 2ರಲ್ಲಿ ವರದಿ ಮಾಡಲಾಗಿದೆ.

3. ಬೆಂಗಳೂರಿನ ಆರ್.ಸಿ. ಕಾಲೇಜಿನಲ್ಲಿ ನೋ.ಸಂ. 119840ರ ಅಭ್ಯರ್ಥಿಯಾಗಿದ್ದ ಶ್ರೀಮತಿ. ಸುನಿತಾ ಆರ್.ಜೆ. ಇವರು ಪರೀಕ್ಷೆ ಬರೆಯುತ್ತಿದ್ದ ಸಂದರ್ಭದಲ್ಲಿ ಮೊಬೈಲ್‌ನಿಂದ ಎಸ್.ಎಂ.ಎಸ್ ಮುಖಾಂತರ ಉತ್ತರಗಳನ್ನು ಪಡೆಯುತ್ತಿದ್ದರೆಂದು ಹಾಗೂ ಉತ್ತರಗಳನ್ನು ಗುರುತಿಸಿರುವ ಒಂದು ಹಾಳೆಯನ್ನು ಹೊಂದಿದ್ದರೆಂದು ಆ ಕೊಠಡಿಯಲ್ಲಿ ಪರೀಕ್ಷೆ ಬರೆಯುತ್ತಿದ್ದ ನೋಂ.ಸಂ. 119841 ಮತ್ತು 119825ರ ಅಭ್ಯರ್ಥಿಗಳು ಗಮನಿಸಿ ಪರೀಕ್ಷಾ ಕೊಠಡಿಯ ಸಂವೀಕ್ಷಕರ ಗಮನಕ್ಕೆ ತಂದಿರುವುದಾಗಿ ಓದಲಾದ 3ರಲ್ಲಿ ವರದಿ ಮಾಡಲಾಗಿದೆ.

4. ಧಾರವಾಡ ಕೇಂದ್ರದ ಜೆ.ಎಸ್.ಎಸ್. ಪ್ರೌಢ ಶಾಲೆಯ ಪರೀಕ್ಷಾ ಕೇಂದ್ರದಲ್ಲಿ ಬೆಳಗ್ಗಿನ 10:00 ಗಂಟೆಯ ಸಾಮಾನ್ಯ ಜ್ಞಾನ ವಿಷಯದ ಪ್ರಥಮ ಪರೀಕ್ಷೆಯಲ್ಲಿ ರೂಮ್. ನಂ. 3ರಲ್ಲಿ ಪ್ರಶ್ನೆ ಪುಸ್ತಿಕೆಗಳನ್ನು ಅಭ್ಯರ್ಥಿಗಳಿಗೆ ವಿತರಿಸುವ ಸಂದರ್ಭದಲ್ಲಿ ಅಭ್ಯರ್ಥಿಗಳಾದ ಯಲ್ಲಪ್ಪ ಶೇಖರಗೋಳ (ನೋಂ.ಸಂ. 208207) ಮತ್ತು ಜಗದೀಶ್ ಎಸ್. ತಳವಾರ (ನೋಂ.ಸಂ.208180) ಇವರುಗಳು ಕೊಠಡಿಯ ಸಂವೀಕ್ಷಕರೊಂದಿಗೆ ಅನಾವಶ್ಯಕವಾಗಿ ಅಸಭ್ಯವರ್ತನೆಯಿಂದ ನಡೆದುಕೊಂಡಿದ್ದು, ಅಕ್ಕಪಕ್ಕದ ಅಭ್ಯರ್ಥಿಗಳಿಗೆ ತೊಂದರೆ ಕೊಡುವುದಲ್ಲದೆ ಅಭ್ಯರ್ಥಿಗಳನ್ನು ಪರೀಕ್ಷೆ ಬರೆಯಬಾರದೆಂದು ಪ್ರಚೋದಿಸಿದ್ದು, ಅಲ್ಲದೆ ಇವರು ಪ್ರಶ್ನೆ ಪತ್ರಿಕೆ ಹಾಗೂ OMR ಶೀಟುಗಳನ್ನು ಹೊರಗೆ ತೆಗೆದುಕೊಂಡು ಹೋಗಲು ಯತ್ನಿಸಿದಾಗ ಪೊಲೀಸ್ ಸಹಾಯದಿಂದ ವಶಪಡಿಸಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಜೆ.ಎಸ್. ತಳವಾರ ಪೊಲೀಸ್ ಕೈ ತಪ್ಪಿಸಿ ಓಡಿ ಹೋಗಿರುತ್ತಾನೆ. ಇವರಿಂದಾಗಿ ಎಲ್ಲಾ ಕೊಠಡಿಯ ಪರೀಕ್ಷಾ ಅಭ್ಯರ್ಥಿಗಳಿಗೆ ತೊಂದರೆಯಾಯಿತು ಮುಂದೆ ಜಿಲ್ಲಾಧಿಕಾರಿಗಳು ಹಾಗೂ ಪೊಲೀಸ್ ಇಲಾಖೆಯ ಸಹಾಯ ಕೋರಿ ಪರೀಕ್ಷೆಯನ್ನು ಸುಗಮವಾಗಿ ನಡೆಸಲು ಅನುಕೂಲವಾಯಿತು, ಎಂದು ಆ ಶಾಲೆಯ ಮೇಲ್ವಿಚಾರಕರು ಮೇಲೆ ಓದಲಾದ 4ರಲ್ಲಿ ವರದಿ ಮಾಡಿದ್ದಾರೆ.

5. ಗುಲ್ಬರ್ಗಾ ಕೇಂದ್ರ ನೂತನ ವಿದ್ಯಾಲಯ ಕನ್ಯಾ ಪ್ರೌಢಶಾಲೆಯಲ್ಲಿನ ಪರೀಕ್ಷಾ ಮೇಲ್ವಿಚಾರಕರ ಓದಲಾದ 5ರ ವರದಿಯಲ್ಲಿ ನೋಂ.ಸಂ. 236475ರ ಅಭ್ಯರ್ಥಿ ಶ್ರೀ. ಜಗದೇವರೆಡ್ಡಿ ಜೆ. ಅಂತರೆಡ್ಡಿ ಇವರು ಪರೀಕ್ಷಾ ಸೂಚನೆಗಳನ್ನು ಪಾಲಿಸದೆ ಪರೀಕ್ಷಾ ಕೊಠಡಿಯೊಳಗೆ ಮೊಬೈಲ್ ತಂದಿದ್ದ ಕಾರಣ ಇವರ ಉತ್ತರ ಹಾಳೆಯನ್ನು ಮುಟ್ಟುಗೋಲು ಹಾಕಲಾಗಿದೆಯೆಂದು ತಿಳಿಸಿರುತ್ತಾರೆ.

6. ವಿ.ಡಿ.ಎಸ್.ಟಿ.ಓ., ಬಾಲಕರ ಪದವಿ ಪೂರ್ವ ಕಾಲೇಜು, ಗದಗ ಈ ಸಂಸ್ಥೆಯಲ್ಲಿ ನೋಂ.ಸಂ. 249162ರ ಅಭ್ಯರ್ಥಿ ವಸಂತ ಕುಮಾರ್ ಹೆಚ್. ವೀರಾಪುರ ಇವರು ಪರೀಕ್ಷೆಗೆ ಉತ್ತರಿಸುತ್ತಿದ್ದ ಸಮಯದಲ್ಲಿ ಎರಡು ಮೂರು ಬಾರಿ

ಹೊರಗಡೆ ಹೋಗಿ ಒಳಗೆ ಬರುವುದು ಮತ್ತು ಹೊರಗೆ ಹೋಗಿ ಮೊಬೈಲ್ ಉಪಯೋಗಿಸಿ ಪರೀಕ್ಷಾರ್ಥಿಗಳಿಗೆ ಕಿರಿಕಿರಿ ಮಾಡಿರುವುದು ಕಂಡು ಬಂದಿರುವುದಾಗಿ ಓದಲಾದ 6ರಲ್ಲಿ ವರದಿ ಮಾಡಲಾಗಿರುತ್ತದೆ.

7. ಚಿತ್ರದುರ್ಗ ಕೇಂದ್ರದಲ್ಲಿನ ಜೆ.ಎಂ.ಐ.ಟಿ. ಪರೀಕ್ಷಾ ಉಪ ಕೇಂದ್ರದಲ್ಲಿ ನೋಂ.ಸಂ. 197743ರ ಅಭ್ಯರ್ಥಿ ಶ್ರೀಮತಿ. ಜಿ.ಎಂ. ಪ್ರೇಮಲೀಲಾ, ಇವರು ಸಾಮಾನ್ಯ ಜ್ಞಾನ ಪತ್ರಿಕೆಗೆ ಸಂಬಂಧಿಸಿದಂತೆ 11.45ರ ಸಮಯದಲ್ಲಿ ನಕಲು ಮಾಡುತ್ತಿದ್ದುದನ್ನು ಕೊಠಡಿಯ ಮೇಲ್ವಿಚಾರಕರಾದ ಶ್ರೀ ಕೆ.ಕೆ ಗುರುರಾಜ್ ಇವರು ಪತ್ತೆ ಹಚ್ಚಿ ನಕಲು ಮಾಡಲು ತಂದಿದ್ದ ಚೀಟಿಯನ್ನು ಹಾಗೂ OMR ಶೀಟ್ ಹಾಗೂ ಪ್ರಶ್ನೆ ಪತ್ರಿಕೆಯನ್ನು ಸದರಿಯವರಿಂದ ತೆಗೆದುಕೊಂಡು ನಕಲು ಮಾಡುತ್ತಿದ್ದ ಬಗ್ಗೆ ಲಿಖಿತ ಹೇಳಿಕೆ ಪಡೆದು ಅಧೀಕ್ಷಕರಿಗೆ ನೀಡಿದ್ದರೆಂದು ದಿನಾಂಕ: 08-06-2008ರಂದು ಆಯೋಗಕ್ಕೆ ನೀಡಲಾದ ಫ್ಯಾಕ್ಸ್ ನಲ್ಲಿ ಬಂದಿರುವುದಾಗಿ ಓದಲಾದ 7ರಲ್ಲಿ ವರದಿ ಮಾಡಲಾಗಿರುತ್ತದೆ.

8. ಮೇಲೆ ಓದಲಾದ 8ರ ವರದಿಯಲ್ಲಿ ನೋಂ. ಸಂ. 193198ರ ಅಭ್ಯರ್ಥಿ ಶ್ರೀ. ಪ್ರಭುಶಂಕರ ಟಿ.ಪಿ. ಇವರು ಪರೀಕ್ಷೆ ನಡೆಯುತ್ತಿದ್ದ ಸಮಯದಲ್ಲಿ ತಾವು ಉತ್ತರಿಸುತ್ತಿದ್ದ OMR ಹಾಳೆಯಲ್ಲಿ ಬಿಳಿ ಶಾಹಿಯನ್ನು ಉಪಯೋಗಿಸಿ ನೋಂದಣಿ ಸಂಖ್ಯೆಯನ್ನು 193619 ಎಂದು ಮತ್ತು ಸಹಿಯನ್ನು ಸಹ ಬದಲಿಸಿರುವುದಾಗಿ ಮೇಲ್ವಿಚಾರಕರು, ಎ.ಐ.ಟಿ ಚಿಕ್ಕಮಗಳೂರು, ಇವರು ತಿಳಿಸಿರುತ್ತಾರೆ.

ಈ ಮೇಲ್ಕಂಡ ಪ್ರಕರಣಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳಿಗೆ ಓದಲಾದ 9 ರಿಂದ 17ರ ಕಾರಣ ಕೇಳುವ ನೋಟೀಸುಗಳನ್ನು ಜಾರಿ ಮಾಡಲಾಗಿದ್ದು, ಶ್ರೀ. ಸಂತೋಷ ಗಿರಿಮಲ್ಲಪ್ಪ ನಾಡಗಿರಿ, ಶ್ರೀ. ವೀರಭದ್ರ ಸುಭಾಷ್‌ಚಂದ್ರ ಅಂಬಲಗಿ, ಶ್ರೀ. ಚನ್ನಬಸಪ್ಪ ಎನ್. ಕೊಂಬಿನ, ಶ್ರೀ. ಜಗದೇವ ರೆಡ್ಡಿ ಜೆ. ಅಂತರೆಡ್ಡಿ, ಶ್ರೀ ಸಂತೋಷ ಕುಮಾರ್ ಮತ್ತು ಶ್ರೀ ಮಹಮ್ಮದ್ ಮುಸ್ತಾಖ್ ಅಹ್ಮದ್ ಇವರು ಲಿಖಿತ ಸಮಜಾಯಿಷಿಗಳನ್ನು ಸಲ್ಲಿಸಿ ತಮ್ಮ ತಪ್ಪನ್ನು ಒಪ್ಪಿಕೊಂಡು ಕ್ಷಮೆಯನ್ನು ಕೋರಿರುತ್ತಾರೆ.

ಶ್ರೀ. ಶೈಲೇಶ್ ಕುಮಾರ್ ಕೆ ನ್ಯಾಮನ್, ಶ್ರೀ. ವಿಜಯಕುಮಾರ್, ಶ್ರೀ. ಚಿದಾನಂದ ಶಂಕರ ಪಾಟೀಲ್, ಶ್ರೀ. ಶಿವಣ್ಣ, ಶ್ರೀ. ಸಿದ್ದಮಲ್ಲಪ್ಪ ಜಲಕಿ ಮತ್ತು ಶ್ರೀಮತಿ. ಸುನಿತಾ ಆರ್.ಜೆ. ಇವರು ಆಯೋಗವು ಜಾರಿಗೊಳಿಸಿದ ನೋಟಿಸುಗಳಿಗೆ ಸಮಜಾಯಿಷಿಯನ್ನು ಸಲ್ಲಿಸಿರುವುದಿಲ್ಲ.

ಶ್ರೀ. ಯಲ್ಲಪ್ಪ ಲಕ್ಷ್ಮಣ ಶೇಖರಗೋಳ, ಶ್ರೀ. ಜಗದೀಶ್ ಎಸ್. ತಳವಾರ, ಶ್ರೀ. ವಸಂತಕುಮಾರ .ಹೆಚ್. ವೀರಾಪುರ, ಶ್ರೀ. ಸಂಜೀವ ಕುಮಾರ, ಶ್ರೀಮತಿ. ಪ್ರೇಮಲೀಲಾ ಜಿ.ಎಂ, ಶ್ರೀ ಸಾಜೀದ್ ಅಲಿ, ಶ್ರೀ. ಪ್ರಶಾಂತ ರಾಂಪೂರೆ ಮತ್ತು ಶ್ರೀ. ಟಿ.ಪಿ ಪ್ರಭುಶಂಕರ್ ಇವರುಗಳು ತಮ್ಮ ಮೇಲಿನ ಆರೋಪಗಳನ್ನು ನಿರಾಕರಿಸಿದ್ದ ಕಾರಣ ಇವರ ಆಪಾದನೆಗಳ ವಿರುದ್ಧ ವಿಚಾರಣೆಯನ್ನು ನಡೆಸಲಾಗಿದ್ದು, ಆರೋಪಗಳು ಸಾಬೀತಾಗಿರುತ್ತವೆಯೆಂದು ವಿಚಾರಣಾಧಿಕಾರಿಗಳು ವರದಿ ಮಾಡಿರುತ್ತಾರೆ. ಮೇಲ್ಕಂಡ ಎಲ್ಲಾ ಅಂಶಗಳನ್ನು ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ಪರಿಗಣಿಸಿ ಆಯೋಗವು 20 ಅಭ್ಯರ್ಥಿಗಳ ವಿರುದ್ಧ ಸೂಕ್ತ ದಂಡನೆಯನ್ನು ವಿಧಿಸುವ ಬಗ್ಗೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಆದೇಶ ಸಂಖ್ಯೆ: ಇ(2)3149/2008-09/ಪಿಎಸ್‌ಸಿ, ದಿನಾಂಕ:28ನೇ ಮಾರ್ಚ್, 2009

ಕರ್ನಾಟಕ ನಾಗರೀಕ ಸೇವೆ (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು 1978 ಹಾಗೂ ಅದಕ್ಕೆ ಸಂಬಂಧಿಸಿದಂತೆ ಆಯೋಗದ ಅಧಿಕೃತ ಜ್ಞಾಪನದ ಸಂಖ್ಯೆ: ಆಡಳಿತ 398/93-94/ಪಿಎಸ್‌ಸಿ, ದಿನಾಂಕ: 14-07-1993ರಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ ಆಪಾದಿತ ಅಭ್ಯರ್ಥಿಗಳಾದ ಶ್ರೀ. ವೀರಭದ್ರ ಸುಭಾಷ್‌ಚಂದ್ರ ಅಂಬಲಗಿ (ನೋಂ.ಸಂ.239884) ಶ್ರೀ. ಚನ್ನಬಸಪ್ಪ ಎನ್. ಕೊಂಬಿನ (ನೋಂ.ಸಂ.239898) ಶ್ರೀ. ಜಗದೇವ ರೆಡ್ಡಿ ಜೆ. ಅಂತರೆಡ್ಡಿ (ನೋಂ.ಸಂ.236475) ಶ್ರೀ ಸಂತೋಷ ಕುಮಾರ್ (ನೋಂ.ಸಂ.235084) ಶ್ರೀ ಮಹಮ್ಮದ್ ಮುಸ್ತಾಖ್ ಅಹ್ಮದ್ (ನೋಂ.ಸಂ.235037) ಶ್ರೀ. ಶೈಲೇಶ್ ಕುಮಾರ್ ಕೆ. ನ್ಯಾಮನ್ (ನೋಂ.ಸಂ.239894) ಶ್ರೀ. ವಿಜಯಕುಮಾರ್ (ನೋಂ.ಸಂ.239922) ಶ್ರೀ. ಚಿದಾನಂದ ಶಂಕರ ಪಾಟೀಲ್ (ನೋಂ.ಸಂ.239881) ಶ್ರೀ. ಶಿವಣ್ಣ (ನೋಂ.ಸಂ.239900) ಶ್ರೀ. ಸಿದ್ದಮಲ್ಲಪ್ಪ ಜಲಕಿ (ನೋಂ.ಸಂ.239909) ಶ್ರೀ. ಯಲ್ಲಪ್ಪ ಲಕ್ಷ್ಮಣ ಶೇಖರಗೋಳ (ನೋಂ.ಸಂ.208207) ಶ್ರೀ. ಜಗದೀಶ್ ಎಸ್. ತಳವಾರ (ನೋಂ.ಸಂ.208180) ಶ್ರೀ. ವಸಂತಕುಮಾರ .ಹೆಚ್. ವೀರಾಪುರ (ನೋಂ.ಸಂ. 249162) ಶ್ರೀ. ಸಂಜೀವ ಕುಮಾರ ಆರ್. ಕಾಟ್ಕೆ (ನೋಂ.ಸಂ. 235130) ಶ್ರೀಮತಿ. ಪ್ರೇಮಲೀಲಾ ಜಿ.ಎಂ (ನೋಂ.ಸಂ.197743) ಶ್ರೀ. ಸಾಜೀದ್ ಅಲಿ (ನೋಂ.ಸಂ. 239899) ಶ್ರೀ. ಪ್ರಶಾಂತ ರಾಂಪೂರೆ (ನೋಂ.ಸಂ. 239882) ಶ್ರೀ. ಸಂತೋಷ .ಜಿ. ನಾಡಗಿರಿ (ನೋಂ.ಸಂ. 239896) ಶ್ರೀ. ಟಿ.ಪಿ ಪ್ರಭುಶಂಕರ್ (ನೋಂ.ಸಂ.193198) ರವರುಗಳಿಗೆ ದಿನಾಂಕ:08-06-2008 ರಂದು ಆಯೋಗವು ನಡೆಸಿದ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯಿಂದ ಡಿಬಾರ್ ಮಾಡುವ ಹಾಗೂ ಶ್ರೀಮತಿ. ಸುನಿತಾ ಆರ್.ಜೆ. (ನೋ.ಸಂ.119840) ಇವರನ್ನು ದಿನಾಂಕ: 08-06-2008ರಂದು ಆಯೋಗವು ನಡೆಸಿದ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯಿಂದ ಡಿಬಾರ್ ಮಾಡುವುದಲ್ಲದೆ ಆಯೋಗವು

ಇನ್ನೂ ಮುಂದೆ ನಡೆಸುವ ಎಲ್ಲಾ ನೇಮಕಾತಿ, ಸ್ಪರ್ಧಾತ್ಮಕ ಪರೀಕ್ಷೆಯ ಮುಖಾಂತರ ನಡೆಸಲಾಗುವ ನೇಮಕಾತಿಗಳಿಗೆ ಹಾಜರಾಗದಂತೆ ಡಿಬಾರ್ ಮಾಡುವ ದಂಡನೆಯನ್ನು ಈ ಮೂಲಕ ವಿಧಿಸಿದೆ.

ಆಯೋಗದ ಆದೇಶದ ಮೇರೆಗೆ,

ವಿ.ಬಿ.ಪಾಟೀಲ್

ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ.

ಕರ್ನಾಟಕ ಲೋಕಸೇವಾ ಆಯೋಗದ ನಡವಳಿಗಳು, ಬೆಂಗಳೂರು

ವಿಷಯ: ಕರ್ನಾಟಕ ಲೋಕಸೇವಾ ಆಯೋಗದ ದಿನಾಂಕ: 08-06-2008ರಂದು ನಡೆಸಿದ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ದುರಾಚಾರ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಅಭ್ಯರ್ಥಿಗಳ ಬಗ್ಗೆ.

ಓದಲಾಗಿದೆ:

1. ಶ್ರೀ ಮುರುಘ ರಾಜೇಂದ್ರ ಸ್ವಾಮೀಜಿ ಬಿ.ಎಡ್. ಕಾಲೇಜು, ಗುಲ್ಬರ್ಗಾ, ಈ ಪರೀಕ್ಷಾ ಉಪ ಕೇಂದ್ರದಲ್ಲಿ ನಡೆಸಿದ ಪರೀಕ್ಷೆಯ ಬಗ್ಗೆ ಶ್ರೀ ಓ. ನಾರಾಯಣ, ಸಹಾಯಕ ಕಾರ್ಯದರ್ಶಿ, ಕ.ಲೋ.ಸೇ.ಆ. ಇವರು ನೀಡಿರುವ ಲಿಖಿತ ವರದಿ.
2. ಈ ಕಛೇರಿಯ ಕಾರಣ ಕೇಳುವ ನೋಟೀಸು ಸಂಖ್ಯೆ:ಇ(2)110-121/2008-09/ಪಿಎಸ್‌ಸಿ, ದಿ:24.06.2008.
3. ಶ್ರೀ ರಾಜೇಂದ್ರ ಎಂ. ಚವ್ಹಾಣ, ಇವರ ದಿನಾಂಕ: 05.07.2008 ಸಮಜಾಯಿಷಿ.
4. ಶ್ರೀ ವಿಶ್ವನಾಥ ಕಲ್ಲಪ್ಪ, ಇವರ ದಿನಾಂಕ: 28.06.2008ರ ಸಮಜಾಯಿಷಿ.

ಪ್ರಸ್ತಾವನೆ:

ದಿನಾಂಕ: 08-06-2008ರಂದು ನಡೆದ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆ ಸಮಯದಲ್ಲಿ ದುರಾಚಾರ ಪ್ರಕರಣಗಳು ವರದಿಯಾಗಿದ್ದು, ಅವುಗಳ ವಿವರ ಈ ಕೆಳಗಿನಂತಿದೆ:-

1. ಶ್ರೀ ಮುರುಘ ರಾಜೇಂದ್ರ ಸ್ವಾಮೀಜಿ ಬಿ.ಎಡ್. ಕಾಲೇಜು, ಗುಲ್ಬರ್ಗಾ, ಈ ಪರೀಕ್ಷಾ ಉಪ ಕೇಂದ್ರದಲ್ಲಿನ ಕೊಠಡಿ ಸಂಖ್ಯೆ: 8 ಮತ್ತು 9ರಲ್ಲಿನ ಕೆಲವು ಅಭ್ಯರ್ಥಿಗಳು ನಕಲು ಮಾಡಲು ಅನುಕೂಲ ಮಾಡುತ್ತಿರುವುದಾಗಿ ಹೇಳುತ್ತಾ ಪರೀಕ್ಷೆಯನ್ನು ಬೈಕಾಟ್ ಮಾಡುವುದಾಗಿ ಶ್ರೀ. ರಾಜೇಂದ್ರ ಎಂ. ಚವ್ಹಾಣ (ನೋಂ.ಸಂ 239893) ಶ್ರೀ. ವಿಶ್ವನಾಥ ಕಲ್ಲಪ್ಪ (ನೋಂ.ಸಂ. 239887) ಇವರುಗಳು 11:50ರ ವೇಳೆಗೆ ಅಂದರೆ ಪರೀಕ್ಷೆ ಮುಗಿಯಲು ಇನ್ನು ಹತ್ತು ನಿಮಿಷ ಇರುವಾಗಲೇ ಕೊಠಡಿಯಿಂದ OMR ಉತ್ತರ ಹಾಳೆಗಳನ್ನು ತೆಗೆದುಕೊಂಡು ಹೋಗಿರುವುದಾಗಿ ಓದಲಾದ 1ರ ವರದಿಯಲ್ಲಿ ತಿಳಿಸಲಾಗಿದೆ.

ಈ ಮೇಲ್ಕಂಡ ಪ್ರಕರಣಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳಿಗೆ ಓದಲಾದ 2ರಲ್ಲಿ ಕಾರಣ ಕೇಳುವ ನೋಟೀಸುಗಳನ್ನು ಜಾರಿ ಮಾಡಲಾಗಿದ್ದು, ಶ್ರೀ. ರಾಜೇಂದ್ರ ಎಂ. ಚವ್ಹಾಣ (ನೋಂ.ಸಂ 239893) ಶ್ರೀ. ವಿಶ್ವನಾಥ ಕಲ್ಲಪ್ಪ (ನೋಂ.ಸಂ. 239887) ಇವರು ಆಯೋಗವು ಜಾರಿಗೊಳಿಸಿದ ನೋಟಿಸುಗಳಿಗೆ ಸಮಜಾಯಿಷಿಯನ್ನು ಓದಲಾದ 3 ಮತ್ತು 4ರಲ್ಲಿ ನೀಡಿರುತ್ತಾರೆ.

ಶ್ರೀ. ರಾಜೇಂದ್ರ ಎಂ. ಚವ್ಹಾಣ (ನೋಂ.ಸಂ 239893) ಶ್ರೀ. ವಿಶ್ವನಾಥ ಕಲ್ಲಪ್ಪ (ನೋಂ.ಸಂ. 239887)ಇವರುಗಳು ತಮ್ಮ ಮೇಲಿನ ಆರೋಪಗಳನ್ನು ಲಿಖಿತ ಸಮಜಾಯಿಷಿಗಳಲ್ಲಿ ನಿರಾಕರಿಸಿದ್ದ ಕಾರಣ ಇವರ ಆಪಾದನೆಗಳ ವಿರುದ್ಧ ವಿಚಾರಣೆಯನ್ನು ನಡೆಸಲಾಗಿದ್ದು, ಇವರ ಮೇಲಿನ ಆರೋಪಗಳು ಸಾಬೀತಾಗಿರುವುದಿಲ್ಲ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ಪರಿಗಣಿಸಿ ಆಯೋಗವು 02 ಅಭ್ಯರ್ಥಿಗಳ ಬಗ್ಗೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಆದೇಶ ಸಂಖ್ಯೆ: ಇ(2)3150/2008-09/ಪಿಎಸ್‌ಸಿ, ದಿನಾಂಕ:28ನೇ ಮಾರ್ಚ್, 2009

ಆಯೋಗವು ದಿನಾಂಕ:08-06-2008 ರಂದು ನಡೆಸಿರುವ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಯ ಅಭ್ಯರ್ಥಿಗಳಾದ ಶ್ರೀ. ರಾಜೇಂದ್ರ ಎಂ. ಚವ್ಹಾಣ (ನೋಂ.ಸಂ 239893) ಮತ್ತು ಶ್ರೀ. ವಿಶ್ವನಾಥ ಕಲ್ಲಪ್ಪ (ನೋಂ.ಸಂ. 239887) ಇವರ ಮೇಲಿನ ಆಪಾದನೆಗಳು ಸಾಬೀತಾಗಿಲ್ಲದಿರುವುದರಿಂದ ಇವರನ್ನು ಆರೋಪ ಮುಕ್ತರನ್ನಾಗಿಸಿ ಆದೇಶಿಸಿದೆ.

ಆಯೋಗದ ಆದೇಶದ ಮೇರೆಗೆ,

ಪಿ.ಆರ್.306

ವಿ.ಬಿ.ಪಾಟೀಲ್

ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ.

KA / BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೪	ಬೆಂಗಳೂರು, ಗುರುವಾರ, ಜೂನ್ ೧೧, ೨೦೦೯ (ಜ್ಯೇಷ್ಠ ೨೧, ಶಕ ವರ್ಷ ೧೯೩೧)	ಸಂಚಿಕೆ ೨೪

ಭಾಗ – ೪

ಕೇಂದ್ರದ ವಿಧೇಯಕಗಳು ಮತ್ತು ಅವುಗಳ ಮೇಲೆ ಪರಿಶೀಲನಾ ಸಮಿತಿಯ ವರದಿಗಳು, ಕೇಂದ್ರದ ಅಧಿನಿಯಮಗಳು ಮತ್ತು ಅಧ್ಯಾದೇಶಗಳು, ಕೇಂದ್ರ ಸರ್ಕಾರದವರು ಹೊರಡಿಸಿದ ಸಾಮಾನ್ಯ ಶಾಸನಬದ್ಧ ನಿಯಮಗಳು ಮತ್ತು ಶಾಸನಬದ್ಧ ಆದೇಶಗಳು ಮತ್ತು ರಾಷ್ಟ್ರಪತಿಯವರಿಂದ ರಚಿತವಾಗಿ ರಾಜ್ಯ ಸರ್ಕಾರದವರಿಂದ ಪುನಃ ಪ್ರಕಟವಾದ ಆದೇಶಗಳು.

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 16 ಕೇಶಾಪ್ರ 2009, ಬೆಂಗಳೂರು, ದಿನಾಂಕ: 7ನೇ ಫೆಬ್ರವರಿ 2009

2009ನೇ ಸಾಲಿನ ಜನವರಿ 9ನೇ ದಿನಾಂಕದ ಭಾರತ ಸರ್ಕಾರದ ಗೆಜೆಟಿನ ವಿಶೇಷ ಸಂಚಿಕೆಯ ಭಾಗ-II ಸೆಕ್ಷನ್ 1 ರಲ್ಲಿ ಪ್ರಕಟವಾದ ಈ ಕೆಳಕಂಡ The Limited Liabilities Partnership Act, 2008 (Act No. 6 of 2009) ಅನ್ನು ಸಾರ್ವಜನಿಕರ ಮಾಹಿತಿಗಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಮರು ಪ್ರಕಟಿಸಲಾಗಿದೆ.

MINISTRY OF LAW AND JUSTICE

(Legislative Department)

New Delhi, the 9th January, 2009/Pausa 19, 1930 (Saka)

The following Act of Parliament received the assent of the President on the 7th January, 2009, and is hereby published for general information :-

THE LIMITED LIABILITY PARTNERSHIP ACT, 2008

No. 6 OF 2009

[7th Janauary, 2009]

An Act to make provisions for the formation and regulation of limited liability partnerships and for matters connected therewith or incidental thereto.

BE it enacted by Parliament in the Fitly-ninth Year of the Republic of India as follows:-

CHAPTER I

PRELIMINARY

1. Short title, extent and commencement : (1) This Act may be called the Limited Liability Partnership Act, 2008.

(2) It extends to the whole of India.

(3) It shall come into force on such date as the Central Government may, by notification in the Official Gazette, appoint:

Provided that different dates may be appointed for different provisions of this Act and any reference in any such provision to the commencement of this Act shall be construed as a reference to the coming into force of that provision.

2. Definitions : (1) In this Act, unless the context otherwise requires,-

(a) "address", in relation to a partner of a limited liability partnership, means-

(i) if an individual, his usual residential address; and

(ii) if a body corporate, the address of its registered office;

(b) "advocate" means an advocate as defined in clause (a) of sub-section (1) of section 2 of the Advocates Act, 1961 (25 of 1961);

(c) "Appellate Tribunal" means the National Company Law Appellate Tribunal constituted under sub-section (1) of section 10FR of the Companies Act, 1956 (1 of 1956);

(d) "body corporate" means a company as defined in section 3 of the Companies Act, 1956 (1 of 1956) and includes-

(i) a limited liability partnership registered under this Act;

(ii) a limited liability partnership incorporated outside India; and

(iii) a company Incorporated outside India,

but does not include -

(i) a corporation sole;

(ii)a co-operative society registered under any law for the time being in force; and

(iii) any other body corporate (not being a company as defined in section 3 of the Companies Act, 1956 (1 of 1956) or a limited liability partnership as defined in this Act), which the Central Government may, by notification in the Official Gazette, specify in this behalf;

(e) "business" includes every trade, profession, service and occupation;

(f) "chartered accountant" means a chartered accountant as defined in clause (b) of sub-section (1) of section 2 of the Chartered Accountants Act, 1949 (38 of 1949) and who has obtained a certificate of practice under sub-section (1) of section 6 of that Act;

(g) "company secretary" means a company secretary as defined in clause (c) of sub-section (1) of section 2 of the Company Secretaries Act, 1980 (56 of 1980) and who has obtained a certificate of practice under sub-section (1) of section 6 of that Act;

(h) "Cost accountant" means a cost accountant as defined in clause (b) of sub-section (1) of section 2 of the Cost and Works Accountants Act, 1959 (23 of 1959) and who has obtained a certificate of practice under sub-section (1) of section 6 of that Act;

(i) "Court", with respect to any offence under this Act, means the Court having jurisdiction as per the provisions of section 77;

(j) "designated partner" means any partner designated as such pursuant to section 7;

(k) "entity" means any body corporate and includes, for the purposes of sections 18, 46,47,48,49, 50,52 and 53, a firm setup under the Indian Partnership Act, 1932 (9 of 1932);

(l) "financial year", in relation to a limited liability partnership, means the period from the 1st day of April of a year to the 31st day of March of the following year:

Provided that in the case of a limited liability partnership incorporated after the 30th day of September of a year, the financial year may end on the 31st day of March of the year next following that year;

(m) "foreign limited liability partnership" means a limited liability partnership formed, incorporated or registered outside India which establishes a place of business within India;

(n) "limited liability partnership" means a partnership formed and registered under this Act;

(o) "limited liability partnership agreement" means any written agreement between the partners of the limited liability partnership or between the limited liability partnership and its partners which determines the mutual rights and duties of the partners and their rights and duties in relation to that limited liability partnership;

(p) "name", In relation to a partner of a limited liability partnership, means-

9. ತ್ರಿಭುಜಾಕಾರ ಗೋಪುರ ಹಾಗೂ ಒಂದು ಕಂಬದ ಗೋಪುರದ (Tripod Antenna Tower and Pole Mast) ಸ್ಥಳಾಂತರ ಹಾಗೂ ಹೊಸದಾಗಿ ಒದಗಿಸಿ ಅಳವಡಿಸುವುದನ್ನು ಬಿಟ್ಟರೆ ನಿರ್ವಹಣೆಗಾಗಿ ಬೇರೆ ಯಾವುದೇ ವೆಚ್ಚವನ್ನು ನೀಡಲಾಗುವುದಿಲ್ಲ.
10. ಸ್ವೀಕೃತ ಟೆಂಡರುದಾರರು ನಿಸ್ತಂತು ಉಪಕರಣಗಳ ನಿರ್ವಹಣೆಯ ನಿಬಂಧನೆ ಮತ್ತು ಷರತ್ತುಗಳನ್ನು ಒಪ್ಪಿಕೊಂಡು ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಜಾಗೃತ), ಬೆಂಗಳೂರು ರವರ ಜೊತೆ ಕರಾರು ಪತ್ರಕ್ಕೆ ಸಹಿ ಹಾಕಬೇಕಾಗಿರುತ್ತದೆ.
11. ಟೆಂಡರುದಾರರು ನಿಸ್ತಂತು ಉಪಕರಣಗಳಾದ ಮೊಬೈಲ್, ಸ್ಟ್ಯಾಟಿಕ್, ವಾಕಿಟಾಕಿಗಳಿಗೆ ಪ್ರತ್ಯೇಕವಾಗಿ ಉಪಕರಣವಾರು ರೂಪಾಯಿಗಳಲ್ಲಿ ಬೆಲೆಯನ್ನು ವಿಭಾಗ/ವೃತ್ತವಾರು ನಮೂದಿಸಬೇಕು.
12. ಸ್ವೀಕೃತ ಟೆಂಡರುದಾರರು ಅಂದಾಜು ಟೆಂಡರ್ ಮೊತ್ತಕ್ಕೆ ರೂ. 4,000/– ಗಳ ಬ್ಯಾಂಕ್ ಡಿಡಿಯನ್ನು ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಜಾಗೃತ), ಬೆಂಗಳೂರು ಇವರ ಹೆಸರಿಗೆ ಬ್ಯಾಂಕ್ ಡಿಡಿಯನ್ನು ತೆಗೆದುಕೊಳ್ಳುವುದು.
13. ಸ್ವೀಕೃತ ಟೆಂಡರದಾರರು ಟೆಂಡರ್ ಮೊತ್ತದ ಶೇಕಡಾ 5 ರಷ್ಟು ಹಣವನ್ನು ರಾಷ್ಟ್ರೀಯ ಸೇವಾ ಪ್ರಮಾಣ ಪತ್ರ (ಎನ್.ಎಸ್.ಸಿ) ಅಥವಾ ನಿಶ್ಚಿತ ಠೇವಣಿ ರೂಪದಲ್ಲಿ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಜಾಗೃತ), ಬೆಂಗಳೂರು ರವರ ಹೆಸರಿನಲ್ಲಿ ಜಂಟೀ ಖಾತೆಯಲ್ಲಿ ಒಂದು ವರ್ಷ ಅವಧಿಗೆ ಅಡಮಾನ ಇಡತಕ್ಕದ್ದು.
14. ಭಾಗಶ: ಟೆಂಡರುಗಳನ್ನು ತಿರಸ್ಕರಿಸಲಾಗುವುದು. ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಜಾಗೃತ), ಬೆಂಗಳೂರು ರವರ ತೆಗೆದುಕೊಳ್ಳುವ ನಿರ್ಧಾರವು ಅಂತಿಮವಾಗಿರುತ್ತದೆ. ಯಾವುದೇ ಕಾರಣ ನೀಡದೆ ಅಂಗೀಕರಿಸುವ ಹಾಗೂ ತಿರಸ್ಕರಿಸುವ ಅಧಿಕಾರವನ್ನು ಹೊಂದಿರುತ್ತಾರೆ.
15. ನಿಸ್ತಂತು ಜಾಲದ ನಿರ್ವಹಣೆಗಾಗಿ ಟೆಂಡರದಾರರು ನೇಮಿಸಿಕೊಳ್ಳುವ ಕೆಲಸಗಾರರಿಗೆ ವೇತನ ಹಾಗೂ ಅಪಘಾತಗಳಿಗೆ ಕರ್ನಾಟಕ ಅರಣ್ಯ ಇಲಾಖೆ ಜವಾಬ್ದಾರರಾಗಿರುವುದಿಲ್ಲ ಎಂಬ ವಿಷಯವನ್ನು ತಿಳಿಯುವುದು.
16. ಈ ಟೆಂಡರ್ ಹಾಗೂ ಟೆಂಡರ್ ಮೊತ್ತ ಸ್ವೀಕರಿಸಿದ ದಿನಾಂಕದಿಂದ ಎರಡು ವರ್ಷಗಳ ಕಾಲಮಿತಿಯಲ್ಲಿರುತ್ತದೆ.
17. ಸ್ವೀಕೃತ ಟೆಂಡರ್‌ದಾರರು ಕಳಪೆ ಕಾಮಗಾರಿ ಅಥವಾ ಅಸಮರ್ಪಕವಾದ ಕೆಲಸ ನಿರ್ವಹಿಸಿದ್ದು ಕಂಡುಬಂದಲ್ಲಿ ಈ ಕೆಳಸಹಿದಾರರು ಟೆಂಡರಿನ ಕರಾರುಪತ್ರವನ್ನು ರದ್ದು ಪಡಿಸುವ ಮುಕ್ತ ಅಧಿಕಾರವನ್ನು ಹೊಂದಿರುತ್ತಾರೆ.

ಸ್ಥಳ: ಬೆಂಗಳೂರು **ಡಾ॥ ಎಸ್. ರಾಜೇಂದ್ರನ್**
ದಿನಾಂಕ: 29.05.2009 ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಜಾಗೃತ) ಬೆಂಗಳೂರು

Detail Tender Notification for Annual maintenance of Wireless Communication Network in Karnataka Forest Department

1. Sealed tenders are invited for the maintenance of the Wireless Sets, like Static, Mobile and Walkie-Talkie in the 1. Bangalore 2. Belgaum 3. Canara 4. Chamrajnagar 5. Chikkamagalore 6. Dharwad 7. Hassan 8. Madikeri 9. FDPT, Mysore 10. Mangalore 11. Mysore 12. Shimoga installed in the forest areas of these Circles, as shown in the following table. The number of sets may increase or decrease during the year as and when new sets are added and old stets are removed as the case may be.

Details of Wireless sets, EMD and the estimated cost of maintenance

(Amount in Rupees)

Sl.No.	Name of the Circles/Units	Divisions	Staticssets	Mobiles	Repeaters	Walkie talkies
1	2	3	4	5	6	7
1	Bangalore	Kolar	5	2	-	15
		Chikkaballapur	6	3	1	22
		Bangalore Rural	9	3	1	13
		Bangalore Urban	2	4	1	20
		Ramanagar	-	3	-	20
		Bannerugatta	-	6	-	52
		Aranya Bhavan	-	41	-	-
			22	**62**	**3**	**142**
Estimated Amount Rs. 81,600.00			**14,080**	**14,880**	**7,200**	**45,440**
EMD Amount Rs. 4,000.00						
2	Belgaum	Belguam	17	7	2	73
		Gokak	5	3	1	-
		Bijapur	3	1	-	-
		Bagalakote	3	1	-	-
			28	**12**	**3**	**73**
Estimated Amount Rs. 51,360.00			**17,920**	**2,880**	**7,200**	**23,360**
EMD Amount Rs. 4,000.00						

1	2	3	4	5	6	7
3	Canara	Sirsi	9	9	4	45
		Dandeli Wild Life	13	12	4	55
		Karwar	8	4	2	30
		Yellapur	6	5	2	30
		Haliyal	8	5	2	55
		Honnavar	9	6	2	30
			53	**41**	**16**	**245**
Estimated Amount Rs. 1,60,560.00			33,920	9,840	38,400	78,400
EMD Amount Rs. 4,000.00						
4	Chamrajnagar	Chamrajnagar Wild Life	27	10	1	60
		Kaveri Wild Life	8	8	1	20
		Kollegal	8	6	3	32
			43	**24**	**5**	**112**
Estimated Amount Rs. 81,120.00			**27,520**	**5,760**	**12,000**	**35,840**
EMD Amount Rs. 4,000.00						
5	Chikkamagalore	Koppa	13	11	2	43
		Bhadra Wild Life	36	16	2	74
		Chikkamagalore	7	10	1	35
			56	**37**	**5**	**152**
Estimated Amount Rs. 1,05,360.00			**35,840**	**8,880**	**12,000**	**48,640**
EMD Amount Rs. 4,000.00						
6	Dharwad	Dharwad	3	8	2	16
		Gadag	2	2	1	13
		Haveri	4	4	-	7
			9	**14**	**3**	**36**
Estimated Amount Rs. 27,840.00			**5,760**	**3,360**	**7,200**	**11,520**
EMD Amount Rs. 4,000.00						
7	Hassan	Hassan	14	9	-	26
		Tumkur	9	4	1	23
			23	**13**	**1**	**49**
Estimated Amount Rs. 35,920.00			**14,720**	**3,120**	**2,400**	**15,680**
EMD Amount Rs. 4,000.00						
8	Madikeri	Madikeri Wild Life	8	3	1	13
		Madikeri	7	6	1	30
		Virajpet	5	4	1	30
			20	**13**	**3**	**73**
Estimated Amount Rs. 46,480.00			**12,800**	**3,120**	**7,200**	**23,360**
EMD Amount Rs. 4,000.00						
9	FDPT, Mysore	Bandipur National Park	27	14	2	116
		Hunsur National Park	18	15	1	102
			45	**29**	**3**	**218**
Estimated Amount Rs. 1,12,720.00			**28,800**	**6,960**	**7,200**	**69,760**
EMD Amount Rs. 4,000.00						
10	Mangalore	Mangalore	15	11	2	30
		Kundapur	10	13	2	63
		Karkala Wild Life	10	10	6	68
Total			35	34	10	161
Total Amount Rs. 1,06,080.00			22,400	8,160	24,000	51,520
EMD Amount Rs. 4,000.00						

1	2	3	4	5	6	7
11	Mysore	Mysore	9	16	1	65
		Mandya	8	7	1	30
		Hunsur	3	2	-	28
		Mysore Wild Life	2	2	-	20
			22	**27**	**2**	**143**
Total Amount Rs. 71,120.00			**14,080**	**6,480**	**4,800**	**45,760**
EMD Amount Rs. 4,000.00						
12	Shimoga	Shimoga	8	12	-	46
		Shimoga Wild Life	7	8	3	51
		Sagar	17	7	1	48
		Bhadravathi	12	7	1	40
			44	**34**	**5**	**185**
Estimated Amount Rs. 1,07,520.00			**28,160**	**8,160**	**12,000**	**59,200**
EMD Amount Rs. 4,000.00						

2. The Tenderer should have atleast minimum two years of Wireless maintenance experience in any State/Central Government Departments. Experience certificate should be produced at the time of agreement.
3. Participating Tenderer should have registered with the Central/State Commercial Tax and VAT.
4. The maintenance Certificates duly signed by the respective Deputy Conservator of Forests of the different forest divisions in the Forest Circle must be produced once in 3 month for making payment. The Payment will be made as per the number of sets maintained in each division and subject to Statutory Tax Deductions.
5. Any complaints from the respective Deputy Conservator of Forests of forest divisions to maintain the Wireless Sets should be attended to within 48 hours.
6. No vehicle or conveyance allowance will be given from the Department for carrying out the maintenance works.
7. No extra payments will be made for the replacement of spares such as RF Cable, GP Antenna, Mobile Antenna, Battery, Battery Packs etc. Such spare will be supplied from this office.
8. No extra payment will be made towards the repairs of Wireless Sets if the repair cost is upto 50% of the cost of the Wireless Set.
9. No Extra Payment will be made for the maintenance of Tripod Antenna Towers and Pole Mast except replacement or shifting and installation.
10. The Successful Tender should execute an agreement with the Addl. Principal Chief Conservator of Forests (Vigilance) Bangalore accepting the terms and conditions of maintenance.
11. Tenderers are instructed to quote the rate in Rupees for individual wireless sets like Mobile, Static and Walkie Talkies in each units/circles.
12. Intending Tenderers should take Bank DD in favour of the Addl. Principal Chief Conservator of Forests (Vigilance) Bangalore for EMD which should be paid for every unit (Rs. 4,000/-)
13. Successful Tenderers should pledge 5% of tender amount in the form of NSC or Bank Fixed deposit in the joint names of the Addl. Principal Chief Conservator of Forests (Vigilance) Bangalore for 1 Year.
14. Incomplete Tenders will be rejected. The decision of the Addl. Principal Chief Conservator of Forests (Vigilance) Bangalore will be final. The Addl. Principal Chief Conservator of Forests (Vigilance) Bangalore has every right to accept or reject the tender without assigning any reason.
15. The Karnataka Forest Department will not be responsible for the wages and the accidents of workers engaged during the maintenance work.
16. This tender rate received will be valid for two years from the date of acceptance.
17. The undersigned has the liberty to terminate the contractor at any time for poor quality/unsatisfactory work.

Bangalore
Dated: 29.05.2009
P.R. 383

Dr. S. Rajendran
APCCF (Vigilance)

ಪೊಲೀಸ್ ಇಲಾಖೆ

PSI (CIVIL) - 2009

(ISO:9001-2000 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)

ಅಧಿಸೂಚನೆ ಸಂಖ್ಯೆ.32/ನೇಮಕಾತಿ/2009-10, ದಿನಾಂಕ: 10ನೇ ಜೂನ್ 2009

ವಿಷಯ: ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್), ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಸೇವೆಯಲ್ಲಿರುವವರು ಒಳಗೊಂಡಂತೆ ಹುದ್ದೆಗಳಿಗೆ ನೇರ ನೇಮಕಾತಿ ಕುರಿತು.

ಕರ್ನಾಟಕ ರಾಜ್ಯದ, ಪೊಲೀಸ್ ಇಲಾಖೆಯಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್), ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹಾಗೂ ಸೇವೆಯಲ್ಲಿರುವವರು ಒಳಗೊಂಡಂತೆ ಹುದ್ದೆಗಳ ನೇರ ನೇಮಕಾತಿಗಾಗಿ ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ನೌಕರರ ಸೇವೆಗಳು ಸೇರಿದಂತೆ (ನೇಮಕಾತಿ) ನಿಯಮ 2004 ಮತ್ತು (ತಿದ್ದುಪಡಿ) ನಿಯಮಗಳು 2009, ಅಧಿಸೂಚನೆ ಸಂಖ್ಯೆ.ಹೆಚ್‌ಡಿ/282/ಪೊಸಿಅ/2008, ದಿನಾಂಕ 28.05.2009, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಹಾಗು ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. **ಅರ್ಜಿ ಸಲ್ಲಿಸುವ ವಿಧಾನ:** ಈ ಬಾರಿ ಅರ್ಜಿಗಳನ್ನು 07 ಕೇಂದ್ರಗಳಲ್ಲಿ ಮಾರಾಟ ಮಾಡುವುದಲ್ಲದೇ ಆನ್-ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರವೂ ಸಹ ಕರೆಯಲಾಗಿದೆ.

ಎ) **ಶುಲ್ಕ :**

ಅಭ್ಯರ್ಥಿಗಳು ಈ ಕೆಳಕಂಡ ವರ್ಗಗಳಿಗೆ ಸೇರಿದವರಾಗಿದ್ದರೆ, ಅದರ ಮುಂದೆ ನಮೂದಿಸಿರುವ ಅರ್ಜಿ / ಪರೀಕ್ಷಾ ಶುಲ್ಕವನ್ನು ಪಾವತಿಸುವುದು	ಆನ್‌ಲೈನ್		ಖುದ್ದಾಗಿ	
	ಅರ್ಜಿ ಶುಲ್ಕ	ಪರೀಕ್ಷಾ ಶುಲ್ಕ	ಅರ್ಜಿ ಶುಲ್ಕ	ಪರೀಕ್ಷಾ ಶುಲ್ಕ
ಪ.ಜಾ, ಪ.ಪಂ, ಪ್ರವರ್ಗ-1	ರೂ.75/-	ರೂ.100/-	ರೂ.150/-	ರೂ.100/-
ಬ್ಯಾಂಕ್ ಶುಲ್ಕ	ರೂ.25/-			
ಒಟ್ಟು	ರೂ.100/-			
ಇತರೆ	ರೂ.75/-	ರೂ.250/-	ರೂ.150/-	ರೂ.250/-
ಬ್ಯಾಂಕ್ ಶುಲ್ಕ	ರೂ.25/-			
ಒಟ್ಟು	ರೂ.100/-			

ಟಿಪ್ಪಣಿ: ಒಮ್ಮೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಮೇಲಿನ ಕಾಲಂಗಳಲ್ಲಿ ಅಭ್ಯರ್ಥಿಗೆ ಅನ್ವಯಿಸುವ ಅರ್ಜಿ ಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು **ನಗದು ರೂಪದಲ್ಲಿ ಮಾತ್ರ** (ಆನ್-ಲೈನ್ ಮುಖೇನ ಕ್ರೆಡಿಟ್/ಡೆಬಿಟ್ ಕಾರ್ಡ್‌ನಲ್ಲಿ ಪಾವತಿಸುವವರನ್ನು ಹೊರತುಪಡಿಸಿ) ಪಾವತಿಸತಕ್ಕದ್ದು. (ಪಾವತಿಸುವ ವಿವರಗಳನ್ನು ಈ ಕೆಳಗಿನ ಪ್ಯಾರಾದಲ್ಲಿ ಸೂಚಿಸಲಾಗಿದೆ). **ಡಿಡಿ, ಪೋಸ್ಟಲ್ ಆರ್ಡರ್**, ಮನಿ **ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

ಬಿ) **ಆನ್-ಲೈನ್ (On-line) ಮುಖಾಂತರ :**

ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ಅಥವಾ www.ksp.gov.in/psi09 ಮೂಲಕ ಅರ್ಜಿಯನ್ನು ಪಡೆದುಕೊಂಡು (Download), ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಈ ಅರ್ಜಿಯ ಜೊತೆಗೆ ಅಭ್ಯರ್ಥಿಯ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರವನ್ನು (Soft Copy - less than 100 KB) ಕಡ್ಡಾಯವಾಗಿ ಸೇರಿಸಿ, ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡುವುದು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅಭ್ಯರ್ಥಿಗಳು ನೀಡಿರುವ ವಿವರಗಳು ಎಲ್ಲ ರೀತಿಯಿಂದಲೂ ಸಮರ್ಪಕವಾಗಿದ್ದು ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಅರ್ಜಿದಾರರು ಆನ್‌ಲೈನ್‌ನಲ್ಲಿ ಮುಂದುವರೆಯಲು ಸಾಧ್ಯವಾಗುತ್ತದೆ. ಅರ್ಹ ಅಭ್ಯರ್ಥಿಯು Submit ಬಟನ್‌ಅನ್ನು ಒತ್ತಿದರೆ ಅರ್ಜಿ ಸಂಖ್ಯೆ ಸೃಜನೆಯಾಗುತ್ತದೆ. ಈ ಆನ್‌ಲೈನ್ ಅರ್ಜಿ ಸಂಖ್ಯೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಬರೆದಿಟ್ಟುಕೊಳ್ಳತಕ್ಕದ್ದು. ಭರ್ತಿ ಮಾಡಿದ ಆನ್-ಲೈನ್ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಈ ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ. ಅರ್ಜಿ ಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು ಕ್ರೆಡಿಟ್ / ಡೆಬಿಟ್ ಕಾರ್ಡ್ ಮುಖೇನ

ಪಾವತಿಸತಕ್ಕದ್ದು. ಕ್ರೆಡಿಟ್ / ಡೆಬಿಟ್ ಕಾರ್ಡ್‌ನ್ನು ಸಂಬಂಧಿಸಿದ ಬ್ಯಾಂಕ್ ಅಂಗೀಕರಿಸಿದಲ್ಲಿ ಮಾತ್ರ ಅರ್ಜಿ ಸಲ್ಲಿಸಿದಂತಾಗುತ್ತದೆ. ಕ್ರೆಡಿಟ್ / ಡೆಬಿಟ್ ಕಾರ್ಡ್ ಇಲ್ಲವಾದಲ್ಲಿ ನಗದು ರೂಪದಲ್ಲಿಯೂ ಸಹ ಪಾವತಿಸಬಹುದು. ಈ ಮೊತ್ತವನ್ನು ಪಾವತಿಸುವ ಸಲುವಾಗಿ Cash Payment Option ಆಯ್ಕೆ ಮಾಡಿದಾಗ ಒಂದು ತ್ರಿಪ್ರತಿ (Triplicate) ಚಲನ್ ತಯಾರಾಗುತ್ತದೆ. ಅಭ್ಯರ್ಥಿಯು ಈ ಚಲನ್‌ಅನ್ನು ಪ್ರಿಂಟ್ ಮಾಡಿಕೊಂಡು ಅದನ್ನು ತ್ರಿಪ್ರತಿಯಲ್ಲಿ ಭರ್ತಿ ಮಾಡಿ ಹತ್ತಿರದ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಅಥವಾ ಸ್ಟೇಟ್ ಬ್ಯಾಂಕ್ ಆಫ್ ಹೈದರಾಬಾದ್ (SBM ಬ್ಯಾಂಕ್ ದೊರಕದಿದ್ದ ಪಕ್ಷದಲ್ಲಿ) ಅಥವಾ ಆಕ್ಸಿಸ್ (AXIS Bank) ಬ್ಯಾಂಕಿನಲ್ಲಿ ಅರ್ಜಿ ಶುಲ್ಕ (75 ರೂ.), ಬ್ಯಾಂಕ್ ಶುಲ್ಕ (25 ರೂ.) ಒಟ್ಟು ರೂ.100/– ಹಾಗೂ ಪರೀಕ್ಷಾ ಶುಲ್ಕವನ್ನು (100 ರೂ. ಅಥವಾ 250 ರೂ. – ಅಭ್ಯರ್ಥಿಗೆ ಅನ್ವಯಿಸುವಂತೆ) ತುಂಬಿ ಅಭ್ಯರ್ಥಿಯು ಚಲನ್ ಮೇಲೆ ಬ್ಯಾಂಕ್ ಶಾಖೆಯ ಮೊಹರು ಪಡೆದರೆ ನಗದು ಮುಖೇನ ಅರ್ಜಿ ಸಲ್ಲಿಸಿದಂತಾಗುತ್ತದೆ. ಆನ್–ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದಿನಾಂಕ 22.06.2009 ರಂದು ಬೆಳಿಗ್ಗೆ 10–00 ಗಂಟೆಯಿಂದ ದಿನಾಂಕ 10.07.2009 ರಂದು ಮದ್ಯಾಹ್ನ 14–00 ಗಂಟೆಯವರೆಗೆ ಸಲ್ಲಿಸತಕ್ಕದ್ದು. ಅರ್ಜಿ ಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿ ಪಾವತಿಸುವವರು ಬ್ಯಾಂಕ್‌ನ ಕಛೇರಿಯ ವೇಳೆಯಲ್ಲಿ ಮಾತ್ರ ಪಾವತಿಸತಕ್ಕದ್ದು.

ಸಿ) **ಖುದ್ದಾಗಿ ಅರ್ಜಿ ಪಡೆದು ಸಲ್ಲಿಸುವ ಅಭ್ಯರ್ಥಿಗಳು:**

ಅರ್ಜಿ ಶುಲ್ಕ ರೂ.150/– ಗಳನ್ನು **ನಗದು ರೂಪದಲ್ಲಿ** ಪಾವತಿಸಿ ದಿನಾಂಕ 22.06.2009 ರಿಂದ 10.07.2009 ರವರೆಗೆ ಬೆಳಿಗ್ಗೆ 10–00 ಗಂಟೆಯಿಂದ ಸಾಯಂಕಾಲ 5–00 ಗಂಟೆಯವರೆಗೆ ಎಲ್ಲಾ ಕೆಲಸದ ದಿನಗಳಂದು (Working Days) ಅರ್ಜಿಯನ್ನು ಈ ಕೆಳಗೆ ನಮೂದಿಸಿರುವ ಪೊಲೀಸ್ ಕಛೇರಿಗಳಲ್ಲಿ ಪಡೆದುಕೊಳ್ಳಬಹುದಾಗಿದೆ. ಅರ್ಹ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1 ಅಭ್ಯರ್ಥಿಗಳಿಗೆ ರೂ. 100/– ಗಳನ್ನು ಪರೀಕ್ಷಾ ಶುಲ್ಕವಾಗಿ ನಿಗದಿಪಡಿಸಲಾಗಿದೆ ಹಾಗೂ ಇತರೇ ಎಲ್ಲಾ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಿದ ಅರ್ಜಿಗಳನ್ನು ರೂ. 250/– ಗಳ ಪರೀಕ್ಷಾ ಶುಲ್ಕದೊಂದಿಗೆ **ನಗದು ರೂಪದಲ್ಲಿ** ದಿನಾಂಕ 10.07.2009 ರಂದು ಸಾಯಂಕಾಲ 6–00 ಗಂಟೆಯೊಳಗೆ ಅಥವಾ ಅದಕ್ಕಿಂತ ಮುಂಚಿತವಾಗಿ **ಅರ್ಜಿಯನ್ನು ಖರೀದಿಸಿದ ಕಛೇರಿಯಲ್ಲಿಯೇ** ಅಭ್ಯರ್ಥಿ ಖುದ್ದಾಗಿ ಸಲ್ಲಿಸಬಹುದಾಗಿರುತ್ತದೆ. ನಮೂದಿಸಿದ ಪರೀಕ್ಷಾ ಶುಲ್ಕವನ್ನು ಪಾವತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

i) ಪೊಲೀಸ್ ಆಯುಕ್ತರು, ನಂ.1, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು ನಗರ
ii) ಪೊಲೀಸ್ ಆಯುಕ್ತರು, ಹುಬ್ಬಳ್ಳಿ–ಧಾರವಾಡ ನಗರ
iii) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ದಕ್ಷಿಣ ವಲಯ, ಮೈಸೂರು
iv) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಉತ್ತರ ವಲಯ, ಬೆಳಗಾವಿ
v) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪೂರ್ವ ವಲಯ, ದಾವಣಗೆರೆ
vi) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಈಶಾನ್ಯ ವಲಯ, ಗುಲ್ಬರ್ಗಾ
vii) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪಶ್ಚಿಮ ವಲಯ, ಮಂಗಳೂರು

ಸೂಚನೆ: ಆನ್‌ಲೈನ್ ಅರ್ಜಿ ಅಥವಾ ಮೇಲ್ಕಾಣಿಸಿದ ಕಛೇರಿಗಳಿಂದ ಖರೀದಿಸಿದ ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗುವುದು. ಜೆರಾಕ್ಸ್ ಮಾಡಿದ ಇಲ್ಲವೇ ಖಾಸಗಿ ವ್ಯಕ್ತಿಗಳಿಂದ ಕೊಂಡಂತಹ ಅರ್ಜಿಗಳು ಸ್ವೀಕೃತಿಗೆ ಅನರ್ಹವಾಗುತ್ತದೆ. ಕೊರಿಯರ್ / ಪೋಸ್ಟ್ ಮುಖಾಂತರ ಕಳುಹಿಸಲಾಗುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಆನ್‌ಲೈನ್ ಮುಖಾಂತರ ಭರ್ತಿ ಮಾಡಿದ ಹಾಗು ಖುದ್ದಾಗಿ ಕೌಂಟರ್‌ನಲ್ಲಿ ನೀಡುವ ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗುವುದು.

ಡಿ) ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.

i) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್)	–	320 ಹುದ್ದೆಗಳು
ii) ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್	–	40 ಹುದ್ದೆಗಳು
iii) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) ಸೇವೆಯಲ್ಲಿರುವವರಿಗೆ	–	40 ಹುದ್ದೆಗಳು
ಒಟ್ಟು	–	400 ಹುದ್ದೆಗಳು

ಇ) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್), ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹಾಗೂ ಸೇವೆಯಲ್ಲಿರುವವರ ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:

i) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) – 320 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಗ್ರಾಮೀಣ ಅಭ್ಯರ್ಥಿ	ಮಾಜಿ ಸೈನಿಕರು	ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರರು
ಸಾಮಾನ್ಯ ವರ್ಗ	160	40	16	8	8	88
ಪರಿಶಿಷ್ಟ ಜಾತಿ	48	12	5	3	3	25
ಪರಿಶಿಷ್ಟ ಪಂಗಡ	10	3	1	–	1	5
ಪ್ರವರ್ಗ–1	13	3	1	1	–	8
ಪ್ರವರ್ಗ–2ಎ	47	12	4	3	3	25
ಪ್ರವರ್ಗ–2ಬಿ	13	3	1	1	–	8
ಪ್ರವರ್ಗ–3ಎ	13	3	1	1	–	8
ಪ್ರವರ್ಗ–3ಬಿ	16	4	2	1	1	8
ಒಟ್ಟು	**320**	**80**	**31**	**18**	**16**	**175**

ii) ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ – 40 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಗ್ರಾಮೀಣ ಅಭ್ಯರ್ಥಿ	ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರರು
ಸಾಮಾನ್ಯ ವರ್ಗ	20	5	1	1	13
ಪರಿಶಿಷ್ಟ ಜಾತಿ	6	1	–	1	4
ಪರಿಶಿಷ್ಟ ಪಂಗಡ	1	1	–	–	–
ಪ್ರವರ್ಗ–1	1	–	–	–	1
ಪ್ರವರ್ಗ–2ಎ	6	1	–	1	4
ಪ್ರವರ್ಗ–2ಬಿ	2	1	–	–	1
ಪ್ರವರ್ಗ–3ಎ	2	1	–	–	1
ಪ್ರವರ್ಗ–3ಬಿ	2	–	–	–	2
ಒಟ್ಟು	**40**	**10**	**1**	**3**	**26**

iii) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) ಸೇವೆಯಲ್ಲಿರುವವರು – 40 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಗ್ರಾಮೀಣ ಅಭ್ಯರ್ಥಿ	ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರರು
ಸಾಮಾನ್ಯ ವರ್ಗ	20	5	1	1	13
ಪರಿಶಿಷ್ಟ ಜಾತಿ	6	1	1	–	4
ಪರಿಶಿಷ್ಟ ಪಂಗಡ	1	–	–	–	1

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಗ್ರಾಮೀಣ ಅಭ್ಯರ್ಥಿ	ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರರು
ಪ್ರವರ್ಗ–1	2	1	–	–	1
ಪ್ರವರ್ಗ–2ಎ	6	1	1	–	4
ಪ್ರವರ್ಗ–2ಬಿ	2	1	–	–	1
ಪ್ರವರ್ಗ–3ಎ	1	–	–	–	1
ಪ್ರವರ್ಗ–3ಬಿ	2	1	–	–	1
ಒಟ್ಟು	**40**	**10**	**3**	**1**	**26**

ಟಿಪ್ಪಣಿ :–
ಗ್ರಾಮೀಣ, ಮಾಜಿ ಸೈನಿಕರು, ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ ಮತ್ತು ಕನ್ನಡ ಮಾಧ್ಯಮ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿರುವ ಅದೇ ಪ್ರವರ್ಗದ ಇತರ ಅಭ್ಯರ್ಥಿಗಳಿಂದ ತುಂಬಲಾಗುವುದು.

2. ಅರ್ಹತೆಗಳು:

(ಎ) **ಅರ್ಹತಾ ಷರತ್ತುಗಳು** :

i) ಭಾರತೀಯ ನಾಗರೀಕನಾಗಿರತಕ್ಕದ್ದು.

ii) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

iii) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(ಬಿ) **ವಯೋಮಿತಿ:**

i) **ಸಾಮಾನ್ಯ ಮತ್ತು ಮಹಿಳಾ ಅಭ್ಯರ್ಥಿಗಳಿಗೆ:**
ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 10.07.2009 ಕ್ಕೆ ಅಭ್ಯರ್ಥಿಗೆ ಕನಿಷ್ಟ 21 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 28 ವರ್ಷಗಳು.

ಆ) ಇತರೆ ಅಭ್ಯರ್ಥಿಗಳಿಗೆ 26 ವರ್ಷಗಳು.

ಇ) ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ ಅವರಿಗೆ ಅವರು ಸೇವೆ ಸಲ್ಲಿಸಿದ ಸೇವಾವಧಿಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು.

ii) **ಸೇವಾನಿರತ ಅಭ್ಯರ್ಥಿಗಳಿಗೆ:**
ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 10.07.2009 ಕ್ಕೆ ಅಭ್ಯರ್ಥಿಗೆ ಈ ಕೆಳಕಂಡ ವಯಸ್ಸು ಮೀರಿರಬಾರದು–

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 40 ವರ್ಷಗಳು.

ಆ) ಇತರೆ ಅಭ್ಯರ್ಥಿಗಳಿಗೆ 35 ವರ್ಷಗಳು.

ಟಿಪ್ಪಣಿ: ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ 8 ವರ್ಷಗಳು ಕನಿಷ್ಟ ಸೇವೆಯನ್ನು (ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಅಂದರೆ 10.07.2009ಕ್ಕೆ ಹೊಂದಿರಬೇಕು) ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಹೊಂದಿರಬೇಕು.

iii) **ಮಾಜಿ ಸೈನಿಕ ಅಭ್ಯರ್ಥಿಗಳಿಗೆ:**

ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ" ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಗಳನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

iv) **ಮಾಜಿ ಸೈನಿಕರ ಬಗ್ಗೆ ವಿವರಣೆ:**

ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಅಯೋಧನಾಗಿ) ಸೇವೆ ಸಲ್ಲಿಸಿದ ವ್ಯಕ್ತಿ, ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್ (Defence Security Corps), ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್ (General Reserved Engineering Force), ಲೋಕ್ ಸಹಾಯಕ್ ಸೇನಾ (Lok Sahayak Sena) ಮತ್ತು ಪ್ಯಾರಾ ಮಿಲಿಟರಿ ದಳ (Para Military Forces) ದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು

(ಅ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು.

ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:

೧. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

೨. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

೩. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ವಿವರಣೆ: ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

v) ಭಾರತ ಸರ್ಕಾರದ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ.36034/27/84–ಸಿಬ್ಬಂದಿ (ಎಸ್‌ಸಿಟಿ), ದಿನಾಂಕ 02.05.1985 ರನ್ವಯ ಮಾಜಿ ಸೈನಿಕರು ಅವರಿಗೆ ನೀಡಿರುವ ಪ್ರಯೋಜನವಾದ ಪುನರ್ ನೇಮಕವನ್ನು ಉಪಯೋಗಿಸಿಕೊಂಡು ಒಂದು ಬಾರಿ ಸರ್ಕಾರಿ ಹುದ್ದೆಗೆ ಆಯ್ಕೆಯಾದಲ್ಲಿ ಅಂತಹ ಮಾಜಿ ಸೈನಿಕರ ಸ್ಥಾನವು ಸರ್ಕಾರಿ ಉದ್ಯೋಗದ ಪುನರ್ ನೇಮಕಕ್ಕೆ ರದ್ದಾಗುತ್ತದೆ. ಕರ್ನಾಟಕ ಸರ್ಕಾರದ ಪತ್ರ ಸಂಖ್ಯೆ.ಒಇ/90/ಪೊಸಿಅ/2005, ದಿನಾಂಕ 02.02.2006ರ ಪತ್ರದಲ್ಲಿ ದಿನಾಂಕ 02.05.1985ರ ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿನ ಮಾರ್ಗಸೂಚಿಯನ್ವಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ. **(ಈ ಕಾರಣದಿಂದ ಮಾಜಿ ಸೈನಿಕರು ಕಡ್ಡಾಯವಾಗಿ ಅರ್ಜಿಯ (OMR) ಕಾಲಂ 8ಎ ಭರ್ತಿ ಮಾಡತಕ್ಕದ್ದು)**

vi) ಈ ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕದ ನಂತರ ಯಾವೊಬ್ಬ ಮಾಜಿ ಸೈನಿಕ ಸರ್ಕಾರಿ ನೌಕರಿಯೊಂದಕ್ಕೆ ಮಾಜಿ ಸೈನಿಕ ಮೀಸಲಾತಿ ಪಡೆದು ಸೇರಿದರೆ, ಅಂತಹ ಮಾಜಿ ಸೈನಿಕ ತಾನು ನೌಕರಿ ಸೇರಿದ ಬಗ್ಗೆ ಸದಸ್ಯ ಕಾರ್ಯದರ್ಶಿಗಳ ಕಛೇರಿಗೆ ಮಾಹಿತಿ ನೀಡತಕ್ಕದ್ದು. ಇಂತಹ ಅಭ್ಯರ್ಥಿಯು ಮಾಜಿ ಸೈನಿಕ ಮೀಸಲಾತಿಗೆ ಅನರ್ಹನಾಗುತ್ತಾನೆ.

vii) ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

3. <u>ವಿದ್ಯಾರ್ಹತೆ:</u>

ಯು.ಜಿ.ಸಿ. ಇಂದ ಮಾನ್ಯತೆ ಪಡೆ.ುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 10.07.2009 ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ಸೈನ್ಯದಲ್ಲಿ ನೀಡಿದ ಪದವಿ ಪ್ರಮಾಣ ಪತ್ರವನ್ನು ದಿನಾಂಕ 10.07.2009 ರೊಳಗೆ ಹೊಂದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

ಎ) **ಸೇವಾನಿರತ ಅಭ್ಯರ್ಥಿಗಳಿಗೆ ವಿದ್ಯಾರ್ಹತೆ ಮತ್ತು ಅನುಭವ:**

ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿ ಜೊತೆಯಲ್ಲಿ ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ 8 ವರ್ಷಗಳ ಕನಿಷ್ಠ ಸೇವೆಯನ್ನು (ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಅಂದರೆ 10.07.2009ಕ್ಕೆ ಹೊಂದಿರಬೇಕು) ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಪೂರ್ಣಗೊಳಿಸಿರಬೇಕು. (ಸೇವಾನಿರತ ಅಭ್ಯರ್ಥಿಗಳು ಮಾಹಿತಿ ಸೂಚಿಯ ಪುಟ ಸಂಖ್ಯೆ-33 ಮತ್ತು 34 ರಲ್ಲಿರುವ ಅನುಬಂಧ-'ಎ' & 'ಬಿ' ಅನ್ನು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ ಅಂದರೆ 10.07.2009ರೊಳಗೆ ಮಾಡಿಸಿಟ್ಟುಕೊಂಡಿರತಕ್ಕದ್ದು)

<u>**ಟಿಪ್ಪಣಿ :**</u>

i) ಡಿಪ್ಲೊಮಾ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ. ಆದ್ದರಿಂದ ಸಬ್ ಇನ್ಸ್‌ಪೆಕ್ಟರ್ ಆಫ್ ಪೊಲೀಸ್ ಹುದ್ದೆಗೆ ಈ ವಿದ್ಯಾರ್ಹತೆಯ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ.

ii) ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ನಿಗಧಿತ ವಿದ್ಯಾರ್ಹತೆಯಾದ ಪದವಿಯನ್ನು ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತು ಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ.

4. <u>**ತರಬೇತಿ, ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ :**</u>

ಎ) ತರಬೇತಿ:

ನೇಮಕಾತಿ ಹೊಂದಿದ ಅಭ್ಯರ್ಥಿಗಳು ಕರ್ನಾಟಕ ಪೊಲೀಸ್ ಅಕಾಡೆಮಿ, ಮೈಸೂರು ಅಥವಾ ಪೊಲೀಸ್ ತರಬೇತಿ ಕೇಂದ್ರ, ಗುಲ್ಬರ್ಗಾ ಅಥವಾ ಪೊಲೀಸ್ ಇಲಾಖೆಯು ತೀರ್ಮಾನಿಸಿದ ಇತರೆ ತರಬೇತಿ ಕೇಂದ್ರದಲ್ಲಿ ಹನ್ನೆರಡು ತಿಂಗಳ ತರಬೇತಿಯನ್ನು ಪಡೆಯಬೇಕಾಗಿದ್ದು, ತರಬೇತಿಯ ಕೊನೆಯಲ್ಲಿ ನಿಗದಿತ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು.

ಬಿ) ಖಾಯಂಪೂರ್ವ ಅವಧಿ:

ಮೂಲ ತರಬೇತಿ ಮತ್ತು ಪ್ರಾಯೋಗಿಕ ತರಬೇತಿ ಸೇರಿದಂತೆ ಎರಡು ವರ್ಷ ಆರು ತಿಂಗಳು.

ಸಿ) ವೇತನ ಶ್ರೇಣಿ:

ರೂ. 10000-250-10500-300-12300-350-14400-400-16800-450-18150

5. <u>**ಸಹಿಷ್ಣುತೆ ಪರೀಕ್ಷೆ (Endurance Test) ಮತ್ತು ದೇಹದಾರ್ಢ್ಯತೆ ಪರೀಕ್ಷೆ :**</u>

ಎ) ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಈ ಕೆಳಗೆ ನಮೂದಿಸಿರುವ 07 ಕೇಂದ್ರಗಳಲ್ಲಿ ನಡೆಸಲಾಗುವುದು. ಆಗಸ್ಟ್ ತಿಂಗಳ ಮೂರನೇ ವಾರ ಅಥವಾ ನಂತರದ ವಾರದಲ್ಲಿ ಈ ಪರೀಕ್ಷೆಗಳನ್ನು ನಡೆಸಲು ಉದ್ದೇಶಿಸಲಾಗಿದೆ. **ಅಭ್ಯರ್ಥಿಯು ಓ.ಎಂ.ಆರ್. ನಲ್ಲಿ ನೀಡಿರುವ ಮಾಹಿತಿ ಮೇರೆಗೆ ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಿಗೆ ಕರೆಯಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯನ್ನು ಬಹಳ ಜಾಗರೂಕತೆಯಿಂದ ತುಂಬಬೇಕು. ಒಂದು ವೇಳೆ ಯಾವುದೇ ತಪ್ಪು / ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವು ರದ್ದಾಗುತ್ತದೆ. ಇದಕ್ಕೆ ಅಭ್ಯರ್ಥಿಯೇ ಸಂಪೂರ್ಣ ಜವಾಬ್ದಾರನಾಗಿರುತ್ತಾನೆ.**

ಬಿ) **ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿ ಒಂದಕ್ಕಿಂತ ಹೆಚ್ಚು ಕಡೆಗಳಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾದರೆ, ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು. (ವಿಶೇಷ ಸೂಚನೆಗಳು 14(ಸಿ) ನೋಡಿ) ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮ.**

ಸಿ) **ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಈ ಕೆಳಕಂಡ 07 ಕೇಂದ್ರಗಳಲ್ಲಿ ಮತ್ತು ಲಿಖಿತ ಪರೀಕ್ಷೆಯನ್ನು ಈ ಕೆಳಕಂಡ 07 ಕೇಂದ್ರಗಳಲ್ಲಿ ನಡೆಸಲಾಗುವುದು.**

(ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ).

ಅರ್ಜಿ ಸ್ವೀಕೃತಿ, ಸಲ್ಲಿಕೆ	ಸಹಿಷ್ಣುತೆ ಪರೀಕ್ಷೆ, ದೇಹದಾರ್ಢ್ಯತೆ ಪರೀಕ್ಷೆಯ ಕೇಂದ್ರಗಳು	ಲಿಖಿತ ಪರೀಕ್ಷೆಯ ಕೇಂದ್ರಗಳು
i) ಪೊಲೀಸ್ ಆಯುಕ್ತರು, ನಂ.1, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು ನಗರ	ಬೆಂಗಳೂರು	ಬೆಂಗಳೂರು
ii) ಪೊಲೀಸ್ ಆಯುಕ್ತರು, ಹುಬ್ಬಳ್ಳಿ–ಧಾರವಾಡ ನಗರ	ಹುಬ್ಬಳ್ಳಿ–ಧಾರವಾಡ	ಹುಬ್ಬಳ್ಳಿ–ಧಾರವಾಡ
iii) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ದಕ್ಷಿಣ ವಲಯ, ಮೈಸೂರು	ಮೈಸೂರು	ಮೈಸೂರು
iv) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಉತ್ತರ ವಲಯ, ಬೆಳಗಾವಿ	ಬೆಳಗಾವಿ	ಬೆಳಗಾವಿ
v) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪೂರ್ವ ವಲಯ, ದಾವಣಗೆರೆ	ದಾವಣಗೆರೆ	ದಾವಣಗೆರೆ
vi) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಈಶಾನ್ಯ ವಲಯ, ಗುಲ್ಬರ್ಗಾ	ಗುಲ್ಬರ್ಗಾ	ಗುಲ್ಬರ್ಗಾ
vii) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪಶ್ಚಿಮ ವಲಯ, ಮಂಗಳೂರು	ಮಂಗಳೂರು	ಮಂಗಳೂರು

ಟಿಪ್ಪಣಿ :

ಖುದ್ದಾಗಿ ಅಥವಾ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸುವ ಎಲ್ಲಾ ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯಲ್ಲಿ ಕಾಲಂ 10 ರಲ್ಲಿ ಮೇಲ್ಕಂಡ ಪಟ್ಟಿಯಲ್ಲಿ ತಿಳಿಸಿರುವಂತೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷಾ ಕೇಂದ್ರವನ್ನು ಗುರುತಿಸತಕ್ಕದ್ದು.

ಡಿ) **ಆನ್‌ಲೈನ್ ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ,** ಆದರೆ ದೈಹಿಕ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಖುದ್ದಾಗಿ ಅರ್ಜಿಗಳನ್ನು ಸಲ್ಲಿಸುವ ಅಭ್ಯರ್ಥಿಗಳಿಗೆ ಕರೆಪತ್ರವನ್ನು ಅಂಚೆ ಮುಖಾಂತರ ಕಳುಹಿಸಲಾಗುವುದು. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಆನ್‌ಲೈನ್ ಅಭ್ಯರ್ಥಿಗಳು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

ಇ) ಕರಪತ್ರದ ಜೊತೆಗೆ ಖುದ್ದಾಗಿ ಸಲ್ಲಿಸುವ ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರವನ್ನು ಹಾಗೂ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

ಎಫ್) <u>ಸಹಿಷ್ಣುತೆ ಪರೀಕ್ಷೆ</u> : (**Endurance Test**)

i) ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹರಾಗಲು ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. ಹಾಗೂ ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳನ್ನು ಈ ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸುವುದನ್ನು ತಿರಸ್ಕರಿಸುವವರು/ ವಿಫಲವಾಗುವವರು ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ಸಹಿಷ್ಣುತೆ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಸಹಿಷ್ಣುತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

ii) ಎಲ್ಲಾ ಅಭ್ಯರ್ಥಿಗಳು 1600 ಮೀಟರ್ ಓಟವನ್ನು 7 ನಿಮಿಷದೊಳಗಾಗಿ ಹಾಗೂ ಮಹಿಳಾ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳು 400 ಮೀಟರ್ ಓಟವನ್ನು 2 ನಿಮಿಷದೊಳಗಾಗಿ ಪೂರ್ಣಗೊಳ್ಳಿಸಿದರೆ ಮಾತ್ರ ಮುಂದಿನ ಸಹಿಷ್ಣುತೆ ಪರೀಕ್ಷೆಗೆ ಅರ್ಹಗೊಳ್ಳುವರು. ಇಲ್ಲದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಈ ಹಂತದಲ್ಲಿಯೇ ಅನರ್ಹಗೊಳಿಸಲಾಗುವುದು.

iii) ಸಹಿಷ್ಣುತೆ ಪರೀಕ್ಷೆಯಲ್ಲಿ ಗುಂಡೆಸೆತ, ಎತ್ತರ ಜಿಗಿತ ಅಥವಾ ಉದ್ದ ಜಿಗಿತಗಳಿಗೆ ಮಾತ್ರ ಮೂರು ಅವಕಾಶಗಳನ್ನು ನೀಡಲಾಗುವುದು. ಇವುಗಳಲ್ಲಿ ಉತ್ತಮವಾದ ಒಂದನ್ನು ಮಾತ್ರ ಗಣನೆಗೆ ತೆಗೆದು ಕೊಳ್ಳಲಾಗುವುದು.

<u>ಎಲ್ಲಾ ಅಭ್ಯರ್ಥಿಗಳಿಗೆ (ಮಹಿಳಾ/ಸೇವಾನಿರತ/ಮಾಜಿ ಸೈನಿಕರನ್ನು ಹೊರತುಪಡಿಸಿ)</u>

ಅಂಶಗಳು	ಅರ್ಹತಾ ವೇಳೆ / ದೂರ
1600 ಮೀಟರ್ ಓಟ	7 ನಿಮಿಷಕ್ಕಿಂತ ಮೀರದಂತೆ
ಎತ್ತರ ಜಿಗಿತ <u>ಅಥವಾ</u> ಉದ್ದ ಜಿಗಿತ	1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ <u>ಅಥವಾ</u> 3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ (3 ಅವಕಾಶಗಳು ಮಾತ್ರ)
ಗುಂಡು ಎಸೆತ (7.26 ಕೆ.ಜಿ.)	5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ (3 ಅವಕಾಶಗಳು ಮಾತ್ರ)

<u>ಮಹಿಳಾ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಈ ಕೆಳಕಂಡ ಸಹಿಷ್ಣುತೆ ಪರೀಕ್ಷೆಯನ್ನು ನಡೆಸಲಾಗುವುದು.</u>

ಅಂಶಗಳು	ಅರ್ಹತಾ ವೇಳೆ / ದೂರ
400 ಮೀಟರ್ ಓಟ	2 ನಿಮಿಷಕ್ಕಿಂತ ಮೀರದಂತೆ
ಎತ್ತರ ಜಿಗಿತ <u>ಅಥವಾ</u> ಉದ್ದ ಜಿಗಿತ	0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ <u>ಅಥವಾ</u> 2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ (3 ಅವಕಾಶಗಳು ಮಾತ್ರ)
ಗುಂಡು ಎಸೆತ (4 ಕೆ.ಜಿ.)	3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ (3 ಅವಕಾಶಗಳು ಮಾತ್ರ)

ಜಿ) **<u>ದೇಹದಾರ್ಢ್ಯತೆ ಪರೀಕ್ಷೆ :</u>** (ಸಹಿಷ್ಣುತೆ ಪರೀಕ್ಷೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳಿಗೆ ಮಾತ್ರ)

ಎಲ್ಲಾ ಅಭ್ಯರ್ಥಿ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅನ್ವಯಿಸುವಂತೆ •

ಕನಿಷ್ಠ ಎತ್ತರ : 168 ಸೆಂ. ಮೀ.

ಕನಿಷ್ಠ ಎದೆ ಸುತ್ತಳತೆ : 86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ) ಕನಿಷ್ಟ ವಿಸ್ತರಣೆ 5 ಸೆಂ. ಮೀ.

ಮಹಿಳಾ ಅಭ್ಯರ್ಥಿಗಳಿಗೆ ಅನ್ವಯಿಸುವಂತೆ

ಕನಿಷ್ಠ ಎತ್ತರ : 157 ಸೆಂ. ಮೀ.

ಕನಿಷ್ಠ ತೂಕ : 45 ಕೆ.ಜಿ.

i) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ.

ii) ಸಹಿಷ್ಣತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

iii) ಅಭ್ಯರ್ಥಿಗಳು ಸಹಿಷ್ಣುತೆ ಪರೀಕ್ಷೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹಗೊಳ್ಳುವರು.

iv) ನಿಗಧಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು.

6. ಲಿಖಿತ ಪರೀಕ್ಷೆ:

ಎ) **ಅಭ್ಯರ್ಥಿಯು ಸಹಿಷ್ಣುತೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾದರೆ ಮಾತ್ರ ಲಿಖಿತ ಪರೀಕ್ಷೆಗೆ ಕರೆಯಲಾಗುವುದು.** ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು 7 (ಏಳು) ಕೇಂದ್ರದಲ್ಲಿ ನಡೆಸಲಾಗುವುದು ಅಂದರೆ : ಬೆಂಗಳೂರು, ಮೈಸೂರು, ದಾವಣಗೆರೆ, ಬೆಳಗಾವಿ, ಗುಲ್ಬರ್ಗಾ, ಹುಬ್ಬಳ್ಳಿ ಮತ್ತು ಮಂಗಳೂರು (ಮುಖ್ಯ ಪ್ಯಾರಾ 5 (ಸಿ) ರಲ್ಲಿ ಸೂಚಿಸಿರುವ ಲಿಖಿತ ಪರೀಕ್ಷಾ ಕೇಂದ್ರಗಳು). ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಅಕ್ಟೋಬರ್ ತಿಂಗಳ ಎರಡನೇ ಭಾನುವಾರ ಅಥವಾ ನಂತರದ ಭಾನುವಾರದಲ್ಲಿ ಈ ಪರೀಕ್ಷೆಯನ್ನು ನಡೆಸಲು ಉದ್ದೇಶಿಸಲಾಗಿದೆ.

ಬಿ) **ಆನ್‌ಲೈನ್ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ,** ಆದರೆ ಲಿಖಿತ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಖುದ್ದಾಗಿ ಅರ್ಜಿಗಳನ್ನು ಸಲ್ಲಿಸುವ ಅಭ್ಯರ್ಥಿಗಳಿಗೆ ಕರೆಪತ್ರವನ್ನು ಅಂಚೆ ಮುಖಾಂತರ ಕಳುಹಿಸಲಾಗುವುದು. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಆನ್‌ಲೈನ್ ಅಭ್ಯರ್ಥಿಗಳು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಲಿಖಿತ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ಲಿಖಿತ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).

ಸಿ) ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲಾತಿಗಳು i) ಲಿಖಿತ ಪರೀಕ್ಷೆಯ ಕರೆಪತ್ರ, ii) ದೈಹಿಕ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ, iv) ಖುದ್ದಾಗಿ ಸಲ್ಲಿಸುವ ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರ, ಅಥವಾ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ತರತಕ್ಕದ್ದು. ತಪ್ಪಿದ್ದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಡಿ) ಲಿಖಿತ ಪರೀಕ್ಷೆಯು ಪದವಿ ಮಟ್ಟದ ಎರಡು ಪತ್ರಿಕೆಗಳದ್ದಾಗಿರುತ್ತದೆ.

i) ಪತ್ರಿಕೆ–1 : ಈ ಪ್ರಶ್ನೆ ಪತ್ರಿಕೆಯಲ್ಲಿ ಪ್ರಾಮುಖ್ಯವಾಗಿ ಪ್ರಬಂಧ ಬರಹ, ಸಾರಾಂಶ ಬರಹ, ಭಾಷಾಂತರ ಪ್ರಶ್ನೆಗಳು ಇರುತ್ತದೆ. ಪ್ರಬಂಧ ಬರಹದಲ್ಲಿ 600 ಶಬ್ದಗಳ ಮಿತಿಯನ್ನು ಮೀರಿದರೆ ಅಂಕಗಳನ್ನು ಕಳೆಯಲಾಗುತ್ತದೆ. ಪ್ರಬಂಧದ ಜೊತೆ ಸಾರಾಂಶ ಬರಹ (Precis) ಪ್ರಶ್ನೆಯನ್ನೂ ಕೊಡಲಾಗುವುದು. ಈ ಪೇಪರ್‌ಗೆ ಕೊಡುವ ಉತ್ತರ ಪತ್ರಿಕೆಯಲ್ಲಿ ಕೇವಲ 10 ಪುಟಗಳು ಮಾತ್ರ ಇರುತ್ತವೆ. ಅಭ್ಯರ್ಥಿಗಳು 10 ಪುಟಗಳು ಮೀರದಂತೆ ಉತ್ತರಿಸತಕ್ಕದ್ದು ಹಾಗೂ ಅತಿರಿಕ್ತ ಉತ್ತರ ಪತ್ರಿಕೆಗಳನ್ನು ಕೊಡಲಾಗುವುದಿಲ್ಲ. ಈ ಪರೀಕ್ಷೆಯ ಅವಧಿ ಒಂದು ಗಂಟೆ ಮೂವತ್ತು ನಿಮಿಷಗಳಾಗಿದ್ದು, 50 ಅಂಕಗಳನ್ನು ಹೊಂದಿರುತ್ತದೆ. (20 ಅಂಕಗಳು ಪ್ರಬಂಧಕ್ಕೆ, 10 ಅಂಕಗಳು ಸಾರಾಂಶ ಬರಹಕ್ಕೆ ಹಾಗೂ 20 ಅಂಕಗಳು ಕನ್ನಡದಿಂದ ಇಂಗ್ಲೀಷ್‌ಗೆ ಮತ್ತು ಇಂಗ್ಲೀಷ್‌ನಿಂದ ಕನ್ನಡ ಭಾಷಾಂತರಕ್ಕೆ) ಇದರಲ್ಲಿ ಕನಿಷ್ಟ ಅಂಕಗಳು ಇರುವುದಿಲ್ಲ. ಭಾಷಾಂತರಕ್ಕೆ ಸಂಬಂಧಿಸಿದ ಪ್ರಶ್ನೆಗಳನ್ನು ಕಡ್ಡಾಯವಾಗಿ ಉತ್ತರಿಸಲೇಬೇಕು.

ii) ಪತ್ರಿಕೆ–2: ಈ ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿದ್ದು, 150 ಅಂಕಗಳಿಗೆ ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ (Multiple Choice) ಉತ್ತರಗಳ ಲಿಖಿತ ಪರೀಕ್ಷೆ ಇರುತ್ತದೆ. ಇವುಗಳನ್ನು ಉತ್ತರಿಸಲು ಒಂದು ಗಂಟೆ ಮೂವತ್ತು ನಿಮಿಷ ಸಮಯ ನೀಡಲಾಗುತ್ತದೆ. ಅಭ್ಯರ್ಥಿಯ ಮಾನಸಿಕ ಸಾಮರ್ಥ್ಯವನ್ನು ಅಳೆಯಲಾಗುವ ಈ ಪ್ರಶ್ನೆ ಪತ್ರಿಕೆಯಲ್ಲಿ ಅಭ್ಯರ್ಥಿಗಳಿಗೆ ಅನಲಿಟಿಕಲ್ ರೀಸನಿಂಗ್ (Analytical Reasoning), ಲಾಜಿಕಲ್ ರೀಸನಿಂಗ್ (Logical Reasoning), ಅಬಸ್ಟ್ರಾಕ್ಟ್ ರೀಸನಿಂಗ್ (Abstract Reasoning), ವರ್ಬಲ್ ಸ್ಕಿಲ್ (Verbal Skills), ಗಣಿತ ಮುಂತಾದ ವಿಷಯಗಳ ಬಗ್ಗೆ ಹೆಚ್ಚಿನ ಒತ್ತು ನೀಡಲಾಗುತ್ತದೆ. ಪ್ರಚಲಿತ ವಿದ್ಯಮಾನಗಳು, ಭಾರತದ ಸ್ವಾತಂತ್ರ್ಯ ಸಂಗ್ರಾಮ, ಚರಿತ್ರೆ, ಭೂಗೋಳ, ವಿಜ್ಞಾನ, ಕಲೆ, ಸಾಹಿತ್ಯ, ನೀತಿ ಶಿಕ್ಷಣ ಇತ್ಯಾದಿಗಳ ಬಗ್ಗೆ ಪ್ರಶ್ನೆಗಳು ಇರುತ್ತದೆ. ಪ್ರತಿ ತಪ್ಪು ಉತ್ತರಕ್ಕೆ ಅಂತಹುದೇ ಪ್ರಶ್ನೆಯ ಸರಿ ಉತ್ತರದ 25% ರಷ್ಟು ಅಂಕಗಳನ್ನು ಕಳೆಯಲಾಗುತ್ತದೆ.

ಇ) **ಸೂಚನೆ:**

i) ಅ) ಅಭ್ಯರ್ಥಿಗಳು ಪತ್ರಿಕೆ–1 ನ್ನು ಇಂಗ್ಲೀಷ್ ಅಥವಾ ಕನ್ನಡದಲ್ಲಿ ಉತ್ತರಿಸಬಹುದು.

ಆ) ಪ್ರಶ್ನೆ ಪತ್ರಿಕೆ–2 ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯಾಗಿದ್ದು, ಅಭ್ಯರ್ಥಿಯು ಸರಿಯಾದ ಉತ್ತರವನ್ನು ಗುರುತಿಸಬೇಕು.

ಇ) ಪ್ರಶ್ನೆ ಪತ್ರಿಕೆ–2ರ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ ಕಪ್ಪು ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ನಿಗದಿತ ಜಾಗದಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ) ಹಾಗು ಅಭ್ಯರ್ಥಿಯು ಅರ್ಜಿ ಸಂಖ್ಯೆ. ರೋಲ್ ನಂಬರ್‌ನ್ನು ತಪ್ಪದೇ ಬರೆಯಬೇಕು. ಇದನ್ನು ಬರೆಯದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ ಹಾಗೂ ಅಭ್ಯರ್ಥಿ ಆಯ್ಕೆ ಪ್ರಕ್ರಿಯೆಯಿಂದ ಹೊರಗಾಗುತ್ತಾನೆ.

ಈ) ಅಭ್ಯರ್ಥಿಗಳು ಅರ್ಜಿ ಸಂಖ್ಯೆ. ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು.

ii) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

iii) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ, ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

iv) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಮೊಬೈಲ್ ಫೋನುಗಳನ್ನು ಅಭ್ಯರ್ಥಿಗಳು ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

v) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಪೇಜರ್, ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ.

7. **ಮೌಖಿಕ ಪರೀಕ್ಷೆ:**

ಎ) ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ತೋರಿದ ಅರ್ಹತೆಗನುಗುಣವಾಗಿ 10 (ಹತ್ತು) ಅಂಕಗಳುಳ್ಳ ಮೌಖಿಕ ಪರೀಕ್ಷೆ / ವ್ಯಕ್ತಿತ್ವ ಪರೀಕ್ಷೆಗೆ ಪ್ರತಿ ಗುಂಪು/ಜಾತಿ/ಪಂಗಡಗಳ ಅಭ್ಯರ್ಥಿಗಳನ್ನು ಅರ್ಹತೆ ಆಧಾರದ ಮೇಲೆ 1:2 ರ ಪ್ರಮಾಣದಲ್ಲಿ ಬೆಂಗಳೂರಿನಲ್ಲಿ ನೇಮಕಾತಿ ಸಮಿತಿಯ ಮುಂದೆ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕಾಗುತ್ತದೆ ಮತ್ತು ದಾಖಲಾತಿಗಳ ಒಂದು ಪ್ರತಿಯನ್ನು ಪತ್ರಾಂಕಿತ ಅಧಿಕಾರಿಯಿಂದ ದೃಢೀಕರಿಸಿಕೊಂಡು ತರುವುದು. ಈ ಮೌಖಿಕ ಪರೀಕ್ಷೆಗೆ ಕನಿಷ್ಟ ಅಂಕಗಳು ಇರುವುದಿಲ್ಲ. ಅಭ್ಯರ್ಥಿಗಳು ಮೂಲ ದಾಖಲಾತಿಗಳನ್ನು ಮೌಖಿಕ ಪರೀಕ್ಷೆ ಪ್ರಾರಂಭವಾಗುವ ಮುನ್ನ ಹಾಜರುಪಡಿಸಬೇಕು. **ಅಭ್ಯರ್ಥಿಗಳಿಗೆ ಮೌಖಿಕ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಅಂಚೆ ಮುಖಾಂತರ ನೀಡಲಾಗುವುದು,** ಮೌಖಿತ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನಿಂದ ಸಹಾ ಪಡೆದುಕೊಳ್ಳಬಹುದು (Download). ಮೌಖಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಡಿ.ಐ.ಜಿ.ಪಿ., ನೇಮಕಾತಿ ಮತ್ತು ತರಬೇತಿ, ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ಕಛೇರಿಯ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಮೌಖಿಕ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).

ಬಿ) ಮೌಖಿಕ ಪರೀಕ್ಷೆಗೆ ತರಬೇಕಾದ ದಾಖಲಾತಿಗಳು i) ಮೌಖಿಕ ಪರೀಕ್ಷೆಯ ಕರೆಪತ್ರ, ii) ದೈಹಿಕ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ, iv) ಖುದ್ದಾಗಿ ಸಲ್ಲಿಸುವ ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರ, ಅಥವಾ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ಹಾಗೂ ಕೋರಿರುವ ಮೀಸಲಾತಿಯ ಪ್ರಮಾಣ ಪತ್ರಗಳನ್ನು ತರತಕ್ಕದ್ದು. ತಪ್ಪಿದ್ದಲ್ಲಿ ಮೌಖಿಕ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಟಿಪ್ಪಣಿ : ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಮೊದಲ ಆದ್ಯತೆಯನ್ನು ನೀಡಿ ಆಯ್ಕೆಗೆ ಪರಿಗಣಿಸಲಾಗುವುದು. ನಂತರ ಮೀಸಲಿರಿಸಿದ ಹುದ್ದೆಗಳು ಖಾಲಿಯಿದ್ದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಅರ್ಹತೆಯನುಸಾರ ಆಯ್ಕೆಗೆ ಪರಿಗಣಿಸಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

ಸಿ) ನಿಗದಿಪಡಿಸಿರುವ ಕೊನೆಯ ದಿನಾಂಕವಾದ 10.07.2009ಕ್ಕೆ ಮುಂಚಿತವಾಗಿ ಅಭ್ಯರ್ಥಿಗಳು ಕೋರುವ ಮೀಸಲಾತಿಗಳ ದಾಖಲಾತಿಗಳನ್ನು ಪಡೆದಿಟ್ಟುಕೊಂಡಿರಬೇಕು.

8. ವೈದ್ಯಕೀಯ ಪರೀಕ್ಷೆ :
ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಅರ್ಹಗೊಳ್ಳುವ ಎಲ್ಲಾ ಅಭ್ಯರ್ಥಿಗಳು ವೈದ್ಯಕೀಯ ಪರೀಕ್ಷೆಗೆ ವೈದ್ಯಕೀಯ ಮಂಡಳಿಯ ಮುಂದೆ ಹಾಜರಾಗತಕ್ಕದ್ದು, ವೇಳೆ ಮತ್ತು ಸ್ಥಳವನ್ನು ನೇಮಕಾತಿ ಪ್ರಾಧಿಕಾರವು ನಿಗಧಿ ಪಡಿಸುವುದು.
ವೈದ್ಯಕೀಯ ಪರೀಕ್ಷೆಗಳು ಈ ಕೆಳಕಂಡಂತಿರುತ್ತವೆ :

(ಎ) ದೃಷ್ಟಿ:
ಕನ್ನಡಕ ಸಹಿತ ಅಥವಾ ಕನ್ನಡಕವಿಲ್ಲದೇ ಕೆಳಗೆ ಕಾಣಿಸಿದ ದರ್ಜೆಯ ಸಮೀಪ ಮತ್ತು ದೂರದ ದೃಷ್ಟಿ ಹೊಂದಿರಬೇಕು.

	ಉತ್ತಮ		ಕನಿಷ್ಠ
(i) ದೂರದ ದೃಷ್ಟಿ	6/9	ಅಥವಾ	6/9
	6/9		6/12
(ii) ಸಮೀಪದ ದೃಷ್ಟಿ	0/6		0/8

ಪ್ರತಿ ಕಣ್ಣು ಸಂಪೂರ್ಣ ಕ್ಷೇತ್ರ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆಯೆಂದು ಪರಿಗಣಿಸಲಾಗುವುದು.

(ಬಿ) ಶ್ರವಣ ಶಕ್ತಿ:
i) ರಿನ್ನೇಸ್ ಪರೀಕ್ಷೆ (Rinne's Test) ii) ವೆಬ್ಬರ್ ಪರೀಕ್ಷೆ (Weber's Test)
iii) ವರ್ಟಿಗೋ ಪರೀಕ್ಷೆ (Tests for Vertigo)
ಮೇಲಿನ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಕಂಡು ಬಂದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು.

(ಸಿ) ಅಪಧಮನಿ ಊತ ಸಹ ಅನರ್ಹತೆ (Varicose Veins)

(ಡಿ) ಮಾತಿನಲ್ಲಿ ಅಡಚಣೆ ಸಹ ಅನರ್ಹತೆ (Impediment in speech)

(ಇ) ಎದೆಯ ಕ್ಷ-ಕಿರಣ (Chest X-Ray) ವನ್ನು ಪರೀಕ್ಷೆಗೆ ತೆಗೆದುಕೊಳ್ಳಲಾಗುವುದು.

ಮೇಲಿನ ಎಲ್ಲಾ ಪರೀಕ್ಷೆಗಳನ್ನು ವೈದ್ಯಕೀಯ ಮಂಡಳಿಯು ನಡೆಸುತ್ತದೆ. ದೈಹಿಕವಾಗಿ ಅರ್ಹರೆಂದು ಪ್ರಮಾಣೀಕರಿಸಿದ್ದಲ್ಲಿ ಮಾತ್ರ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹಗೊಳ್ಳುವರು.

ಟಿಪ್ಪಣಿ : ಸಹಿಷ್ಣುತೆ ಪರೀಕ್ಷೆ, ಲಿಖಿತ ಪರೀಕ್ಷೆ, ಮೌಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

9. **ಜಾತಿ ಮೀಸಲಾತಿ ಪ್ರಮಾಣ ಪತ್ರಗಳು** :
ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸುವುದು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ ನಮೂನೆ-ಡಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಬಿ) ಪ್ರವರ್ಗ – 1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ-ಇ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಸಿ) ಪ್ರವರ್ಗ– 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ – ಎಫ್ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಸೂಚನೆ : ನಮೂನೆ – ಎಫ್ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ: 10.07.2009 ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

10. ಗ್ರಾಮೀಣ ಮೀಸಲಾತಿ:

ಎ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರಬೇಕು, **ಮತ್ತು**

ಬಿ) ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು **ವ್ಯಾಸಂಗ ಮಾಡಿದ ಅವಧಿಯಲ್ಲಿ** ಅಂದಿನ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976ರ ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಯಾಗಿರಬೇಕು, **ಮತ್ತು**

ಸಿ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅಧಿಸೂಚನೆ ಸಂಖ್ಯೆ. ಸಿಆಸುಇ:08:ಸೆನೆನಿ:2001, ದಿನಾಂಕ 13.02.2001ರ ಪ್ರಕಾರ ಮೇಲೆ ಪರಿಭಾಷಿಸಿದಂತೆ ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರುವವರು ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ/96/ಸೆನೆನಿ/2005, ದಿನಾಂಕ 10.08.2005ರಲ್ಲಿ ನಿಗಧಿಪಡಿಸಿದ ನಮೂನೆ-2ರ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆಯುವುದು. (ನಮೂನೆ-1 (ನಾನ್-ಕ್ರೀಮಿ ಲೇಯರ್) ಮತ್ತು ನಮೂನೆ-2 ಇವುಗಳು ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ಕಡ್ಡಾಯವಾಗಿರುತ್ತದೆ).

ಡಿ) ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಸೇರಿದ ಅಭ್ಯರ್ಥಿಗಳು ನಮೂನೆ-2ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

ಸೂಚನೆ: ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು Non-Creamy Layer ಪ್ರಮಾಣ ಪತ್ರವನ್ನು ಹೊಂದಿರದಿದ್ದಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

11. ಯೋಜನಾ ನಿರಾಶ್ರಿತರು:

ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ. ಡಿಪಿಎಆರ್:23:ಎಸ್ಆರ್ಆರ್:99, ದಿನಾಂಕ 23.11.2000ರನ್ವಯ ಸರ್ಕಾರದ ಸುತ್ತೋಲೆ ಸಂಖ್ಯೆ. ಸಿಆಸುಇ:44:ಸೆನೆನಿ:2001, ದಿನಾಂಕ 27.07.2001ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

12. ಕನ್ನಡ ಮಾಧ್ಯಮ:

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

13. ಪ್ರಮುಖವಾದ ಸೂಚನೆಗಳು :

ಅಭ್ಯರ್ಥಿಗಳು ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಕೂಡದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ದಾಖಲಾತಿಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧುವಾಗಿರುವಂತೆ ಪಡೆದಿಟ್ಟುಕೊಂಡಿದ್ದು, ಸಮಿತಿಯು ಸೂಚಿಸಿದಾಗ ಹಾಜರು ಪಡಿಸತಕ್ಕದ್ದು.

ಎ) ಪದವಿ ಪರೀಕ್ಷೆಯ ಅಂಕಪಟ್ಟಿ/ಪದವಿ ಪ್ರಮಾಣ ಪತ್ರ.

ಬಿ) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪ್ರಮಾಣ ಪತ್ರ)

ಸಿ) ಸರ್ಕಾರಿ ಇಲಾಖೆಯಲ್ಲಿ/ರಾಜ್ಯಸರ್ಕಾರದ/ಕೇಂದ್ರ ಸರ್ಕಾರದ/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ/ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ.

ಡಿ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಇ) ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.

ಎಫ್) ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).

ಜಿ) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು.

ಎಚ್) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿಟ್ಟುಕೊಂಡಿರತಕ್ಕದ್ದು.

ಐ) ಸೇವಾನಿರತ ಅಭ್ಯರ್ಥಿಗಳು ತಮ್ಮ ಸದ್ಯದ ಹುದ್ದೆಗೆ ಸಂಬಂಧಿಸಿದಂತೆ ಪೋಲೀಸ್ ಕಮೀಷನರ್ / ಪೋಲೀಸ್ ಅಧೀಕ್ಷಕರು / ಘಟಕಾಧಿಕಾರಿಗಳಿಂದ ಮಾಹಿತಿ ಸೂಚಿಯ ಅನುಬಂಧ 'ಎ' ರಲ್ಲಿ ನಿಗದಿಪಡಿಸಿರುವಂತೆ ಪ್ರಮಾಣಪತ್ರ ಪಡೆದಿಟ್ಟುಕೊಂಡಿರತಕ್ಕದ್ದು.

ಜೆ) ಸೇವಾನಿರತ ಅಭ್ಯರ್ಥಿಗಳು ತಮ್ಮ ಸದ್ಯದ ಹುದ್ದೆಗೆ ಸಂಬಂಧಿಸಿದಂತೆ ಮಾಹಿತಿ ಸೂಚಿನ ಅನುಬಂಧ 'ಬಿ' ರಲ್ಲಿ ನಿಗದಿಪಡಿಸಿರುವಂತೆ ಘೋಷಣಾ ಪತ್ರ ಪಡೆದಿಟ್ಟುಕೊಂಡಿರತಕ್ಕದ್ದು.

ಟಿಪ್ಪಣಿ : ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದ ನಂತರ ಮಾಡಿಸುವ ಮೀಸಲಾತಿ ಪ್ರಮಾಣ ಪತ್ರಗಳನ್ನು ಯಾವುದೇ ಹಂತದಲ್ಲಿ ಗಣನೆಗೆ ತೆಗೆದುಕೊಳ್ಳುವುದಿಲ್ಲ.

ಕೆ) ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯನ್ನು ಭರ್ತಿ ಮಾಡುವಾಗ ಅರ್ಜಿಯ ಎಲ್ಲಾ ಕಾಲಂಗಳನ್ನು **ಕಪ್ಪು** ಬಣ್ಣದ ಬಾಲ್ ಪಾಯಿಂಟ್ ಪೆನ್ನಿನಿಂದ ಮಾತ್ರ ತುಂಬತಕ್ಕದ್ದು. ಅಲ್ಲದೆ, ಮೀಸಲಾತಿಗಳನ್ನು ಕೋರಿದಲ್ಲಿ ಖುದ್ದಾಗಿ ಪಡೆದು ಸಲ್ಲಿಸುವ ಅರ್ಜಿಯಲ್ಲಿ ಮೀಸಲಾತಿಗಾಗಿ ನಿರ್ದಿಷ್ಟಪಡಿಸಿದ ವೃತ್ತಗಳನ್ನು ತುಂಬತಕ್ಕದ್ದು. ಮೀಸಲಾತಿಯ ವೃತ್ತಗಳಲ್ಲಿ ಖಾಲಿ ಬಿಟ್ಟಿರುವ ಅಭ್ಯರ್ಥಿಗಳ ಮೀಸಲಾತಿಯನ್ನು ಸಾಮಾನ್ಯ ಅರ್ಹತೆಯೆಂದು ಪರಿಗಣಿಸಲಾಗುವುದು. ನಿರ್ದಿಷ್ಟವಾದ ವೃತ್ತಗಳಲ್ಲಿ ಮೀಸಲಾತಿಯನ್ನು ನಮೂದಿಸದೆ ಬೇರೆ ಕಡೆ ಗುರುತು (ಶೇಡ್) ಮಾಡಿದ್ದಲ್ಲಿ ಅಂತಹವುಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

ಎಲ್) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

ಎಂ) ಅಭ್ಯರ್ಥಿಗಳು ನೇಮಕಾತಿ ಸಮಿತಿಯೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ಅವರ ಮನವಿ ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

i) ಅರ್ಜಿಯ ನಕಲು ಪ್ರತಿ

ii) ಖುದ್ದಾಗಿ ಪಡೆದು ಅರ್ಜಿ ಸಲ್ಲಿಸಿದ ಬಗ್ಗೆ ನೇಮಕಾತಿ ಸಮಿತಿಯ ಕಛೇರಿಯವರು ನೀಡಿದ ಅರ್ಜಿ ಸ್ವೀಕೃತಿ ಪತ್ರ ನಕಲು ಪ್ರತಿ

14. ವಿಶೇಷ ಸೂಚನೆಗಳು :

ಎ) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಓ.ಎಂ.ಆರ್. ಅರ್ಜಿಯ ಒಂದು ಫೋಟೋ (Xerox) ಪ್ರತಿಯನ್ನು ಮತ್ತು ಆನ್‌ಲೈನ್ ಮುಖಾಂತರ ಸಲ್ಲಿಸಿದ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

ಬಿ) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗಧಿತ ವೃತ್ತವನ್ನು (Circle) ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿದ್ದು ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

ಸಿ) **ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಬಾರದೆಂದು ಸಲಹೆ ನೀಡಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸುವ ಬದಲು ಒಂದೇ ಅರ್ಜಿಯನ್ನು ಪಡೆದು ಅತೀ ಜಾಗರೂಕತೆಯಿಂದ ಮತ್ತು ಬಹಳ ಎಚ್ಚರಿಕೆಯಿಂದ ಭರ್ತಿ ಮಾಡತಕ್ಕದ್ದು, ಏಕೆಂದರೆ ಒಂದಕ್ಕಿಂತ ಹೆಚ್ಚು ನೋಂದಣಿ ಸಂಖ್ಯೆಯಲ್ಲಿ ಪರೀಕ್ಷೆಗೆ ಹಾಜರಾಗಿದ್ದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ಅಂತಹ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. ಸಂಕ್ಷಿಪ್ತವಾಗಿ ತಿಳಿಸುವುದೆಂದರೆ ಒಬ್ಬ ಅಭ್ಯರ್ಥಿಯು ಒಂದು ನೋಂದಣಿ ಸಂಖ್ಯೆಗಿಂತ ಹೆಚ್ಚು ನೋಂದಣಿ ಸಂಖ್ಯೆಯನ್ನು ಪರೀಕ್ಷೆಯ ಯಾವುದೇ ಹಂತದಲ್ಲಿ ಬಳಸುವುದನ್ನು ನಿಖರವಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಒಂದೇ ಹೆಸರಿನಲ್ಲಿ ಸಲ್ಲಿಸಿ ಬೇರೆ ಬೇರೆ ಫೋಟೋಗಳನ್ನು ಹಚ್ಚಿ, ಸಹಿಗಳನ್ನು ಮಾಡಿ ಪರೀಕ್ಷೆಗೆ ಹಾಜರಾಗಿದ್ದು ಕಂಡುಬಂದಲ್ಲಿ ಅಂತಹವರ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅವರ ಮೇಲೆ ಕಾನೂನಿನ ರೀತ್ಯಾ ಕ್ರಮವನ್ನು ಕೈಗೊಳ್ಳಲಾಗುವುದು. ಈ ವಿಚಾರದಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.**

ಡಿ) ಅರ್ಹ ಅಭ್ಯರ್ಥಿಗಳು ಮೂಲ ದಾಖಲಾತಿಗಳ ಪರಿಶೀಲನಾ ಸಂದರ್ಭದಲ್ಲಿ (ಅಂದರೆ ಮೌಖಿಕ ಪರೀಕ್ಷೆಯ ಸಂದರ್ಭದಲ್ಲಿ) ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲಾತಿ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು

ರದ್ದುಪಡಿಸಲಾಗುವುದು. **ಅರ್ಜಿಯೊಂದಿಗೆ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಹಾಗೂ ಪ್ರತಿಗಳನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ**. ಒಂದು ವೇಳೆ ಸಲ್ಲಿಸಿ, ಅವು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

ಇ) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಂದರೆ 10.07.2009ಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ (ಪದವಿ)ಯನ್ನು ಹೊಂದಿರಬೇಕು.

ಎಫ್) ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗಧಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಅಭ್ಯರ್ಥಿಗಳು ಸ್ವಂತ ಕೈಬರಹದಿಂದ ದುಂಡಗೆ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೆ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ, ಎಡಗೈ ಹೆಬ್ಬೆಟಿನ ಗುರುತಿಲ್ಲದ ಮತ್ತು ಸಹಿ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಜಿ) ಅರ್ಜಿಯನ್ನು ಯಾವುದೇ ಸಂದರ್ಭದಲ್ಲಿ ಮಡಚಬಾರದು, ಪಿನ್, ಸ್ಟ್ಯಾಪಲ್ ಮತ್ತು ರಂಧ್ರ ಮಾಡಬಾರದು.

ಹೆಚ್) ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ / ವಿವರಗಳ ಆಧಾರದ ಮೇರೆಗೆ ಅವರ ಅರ್ಹತೆಯನ್ನು ಪರಿಗಣಿಸುವುದರಿಂದ ಮತ್ತು ಅಭ್ಯರ್ಥಿಗಳು ಸಲ್ಲಿಸುವ ಅರ್ಜಿಗಳನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ದಪಡಿಸುವುದರಿಂದ, ಅಭ್ಯರ್ಥಿಗಳು ಅರ್ಜಿಗಳನ್ನು ತುಂಬುವಾಗ ಯಾವುದೇ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.

ಐ) **ಚಿತ್ತು ಅಥವಾ ಹೊಡೆದುಹಾಕುವುದು ಕೂಡ ಮಾಡಬಾರದು. ಹಾಗೇನಾದರೂ ಚಿತ್ತು ಆದಲ್ಲಿ ಹೊಡೆದು ಹಾಕಿದಲ್ಲಿ ಅಥವಾ ಅರ್ಜಿಯನ್ನು ವಿರೂಪಗೊಳಿಸಿದಲ್ಲಿ ಮತ್ತೊಂದು ಅರ್ಜಿ ಪಡೆದು ತುಂಬಿ ಸಲ್ಲಿಸುವುದು ಅವಶ್ಯಕ. ಖರೀದಿಸಿದ ಓ.ಎಂ.ಆರ್. ಅರ್ಜಿಯನ್ನು ಜೆರಾಕ್ಸ್ ಪ್ರತಿ ಮಾಡಿಸಿ, ಮೊದಲು ಜೆರಾಕ್ಸ್ ಪ್ರತಿಯಲ್ಲಿ ಭರ್ತಿಮಾಡಿ, ಅರ್ಜಿಯಲ್ಲಿನ ವಿವರಗಳು ಸರಿಯಾಗಿವೆಯೇ ಎಂದು ಮನಗಂಡು ಆ ನಂತರ ಮೂಲ ಅರ್ಜಿಯನ್ನು ಭರ್ತಿ ಮಾಡುವುದು ಸೂಕ್ತ.**

ಜೆ) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ: 10.07.2009 ಮಾತ್ರ ಅನ್ವಯವಾಗುತ್ತದೆ.

ಕೆ) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

